ಕರ್ನಾಟಕ ಸರ್ಕಾರ

# ಸಮಾಜ ವಿಜ್ಞಾನ

## (ಪರಿಷ್ಕೃತ – 2022)

## ಭಾಗ – 1

# 10

## ಹತ್ತನೆಯ ತರಗತಿ

@KTBS NOT TO BE REPUBLISHED

**ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.)**

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003.

# ಮುನ್ನುಡಿ

2005ನೇ ರಾಷ್ಟ್ರೀಯ ಪಠ್ಯಕ್ರಮದ ಆಧಾರದ ಮೇಲೆ ರಚಿತವಾದ ಕರ್ನಾಟಕ ರಾಜ್ಯ ಪಠ್ಯವಸ್ತುವಿನ ಆಧಾರದ ಮೇಲೆ ಕರ್ನಾಟಕ ಪಠ್ಯಪುಸ್ತಕ ಸಂಘವು 2010 ನೇ ಸಾಲಿನಿಂದ ಒಂದನೇ ತರಗತಿಯಿಂದ ಹತ್ತನೇ ತರಗತಿವರೆಗಿನ ಪಠ್ಯಪುಸ್ತಕಗಳ ರಚನಾ ಕಾರ್ಯದಲ್ಲಿ ತೊಡಗಿದೆ. ಒಟ್ಟು 12 ಭಾಷೆಗಳಲ್ಲಿ ಭಾಷಾ ಪಠ್ಯಪುಸ್ತಕಗಳನ್ನು ಹಾಗೂ ಕೋರ್ ವಿಷಯಗಳನ್ನು 7 ಮಾಧ್ಯಮಗಳಲ್ಲಿ ರಚನೆ ಮಾಡಲಾಗುತ್ತಿದೆ. 1 ರಿಂದ 4 ನೇ ತರಗತಿಯವರೆಗೆ ಪರಿಸರ ವಿಜ್ಞಾನ, ಗಣಿತ ಮತ್ತು 5 ರಿಂದ 10 ನೇ ತರಗತಿಯವರೆಗೆ ಕೋರ್ ವಿಷಯಗಳಾದ ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನಗಳಿರುತ್ತವೆ.

**2005 ರ ರಾಷ್ಟ್ರೀಯ ಪಠ್ಯಕ್ರಮವು ಈ ಕೆಳಗಿನ ವೈಶಿಷ್ಟ್ಯಗಳನ್ನು ಹೊಂದಿದೆ.**

- ಕಲಿಕೆಯನ್ನು ಜೀವನದ ಅವಶ್ಯಕತೆಗಳೊಂದಿಗೆ ಜೋಡಿಸುವುದು.
- ಕಂಠಪಾಠ ವಿಧಾನದಿಂದ ಕಲಿಕೆಯನ್ನು ಮುಕ್ತಗೊಳಿಸುವುದು.
- ಪಠ್ಯಪುಸ್ತಕಗಳ ಹೊರತಾಗಿ ಪಠ್ಯಕ್ರಮವನ್ನು ಶ್ರೀಮಂತಗೊಳಿಸುವುದು.
- ಜ್ಞಾನದ ಅಭಿವೃದ್ಧಿಗೆ ಕಲಿಕಾ ಅನುಭವಗಳನ್ನು ಬಳಸುವುದು.
- ಭಾರತದ ಪ್ರಜಾಸತ್ತಾತ್ಮಕ ನೀತಿಯನ್ವಯ ಮಕ್ಕಳ ಅವಶ್ಯಕತೆಗಳಿಗೆ ತಕ್ಕಂತೆ ಸ್ಪಂದಿಸುವುದು.
- ಶಿಕ್ಷಣವನ್ನು ಇಂದಿನ ಹಾಗೂ ಭವಿಷ್ಯದ ಜೀವನಾವಶ್ಯಕತೆಗಳಿಗೆ ಹೊಂದುವಂತೆ ಮಾಡುವುದು.
- ವಿಷಯಗಳ ಮೇರೆಗಳನ್ನು ಮೀರಿ ಅವುಗಳಿಗೆ ಸಮಗ್ರದೃಷ್ಟಿಯ ಬೋಧನೆಯನ್ನು ಅಳವಡಿಸುವುದು.
- ಶಾಲೆಯ ಹೊರಗಿನ ಬದುಕಿಗೆ ಜ್ಞಾನ ಸಂಯೋಜನೆ.
- ಮಕ್ಕಳಿಂದಲೇ ಜ್ಞಾನವನ್ನು ಅಭಿವೃದ್ಧಿ ಪಡಿಸುವುದು.

ನೂತನ ಪಠ್ಯಪುಸ್ತಕಗಳಲ್ಲಿ ನೂತನ ವಿಧಾನಗಳಾದ ಅಂತರ್ಗತ ವಿಧಾನ (Integrated Approach), ರಚನಾತ್ಮಕ ವಿಧಾನ (Constructive Approach) ಹಾಗೂ ಸುರುಳಿಯಾಕಾರದ ವಿಧಾನ (Spiral Approach) ಗಳನ್ನು ಅಳವಡಿಸಲಾಗಿದೆ.

ಪಠ್ಯಪುಸ್ತಕಗಳ ವಿಷಯ ಹಾಗೂ ಅಭ್ಯಾಸಗಳು ವಿದ್ಯಾರ್ಥಿಗಳನ್ನು ಯೋಚನೆ ಮಾಡುವಂತೆ ಮಾಡಿ, ಚಟುವಟಿಕೆಗಳ ಮೂಲಕ ಜ್ಞಾನ ಹಾಗೂ ಸಾಮರ್ಥ್ಯಗಳನ್ನು ಪಡೆಯುವಂತೆ ಮಾಡುವ ಪ್ರಯತ್ನ ಮಾಡಲಾಗಿದೆ. ಪಠ್ಯವಸ್ತುಗಳೊಂದಿಗೆ ಅತ್ಯಂತ ಅವಶ್ಯಕ ಜೀವನ ಮೌಲ್ಯಗಳನ್ನು ಅಂತರ್ಗತವಾಗಿ ಬಳಸಲಾಗಿದೆ. ಈ ನೂತನ ಪಠ್ಯಪುಸ್ತಕಗಳು ಪರೀಕ್ಷಾ ದೃಷ್ಟಿಯಿಂದ ರಚಿತವಾಗಿಲ್ಲ. ಬದಲಾಗಿ ಅವುಗಳು ವಿದ್ಯಾರ್ಥಿಗಳ ಸರ್ವಾಂಗೀಣ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗಿವೆ. ತನ್ಮೂಲಕ ಅವರನ್ನು ಸ್ವತಂತ್ರ ಭಾರತದ ಸ್ವಸ್ಥ ಸಮಾಜದ ಉತ್ತಮ ಪ್ರಜೆಗಳನ್ನಾಗಿ ಮಾಡುವ ಪ್ರಯತ್ನ ನಡೆದಿದೆ.

5ನೇ ತರಗತಿಯ ಸಮಾಜ ವಿಜ್ಞಾನ ಪಠ್ಯಪುಸ್ತಕದಲ್ಲಿ ಒಂದು ಹೊಸತನವನ್ನು ತರಲಾಗಿದೆ. ಕರ್ನಾಟಕದ ನಾಲ್ಕು ವಿಭಾಗಗಳಿಗೆ ಬೇರೆ ಬೇರೆ ಪುಸ್ತಕಗಳನ್ನು ತಯಾರಿಸಲಾಗಿದೆ. ಅವುಗಳಲ್ಲಿನ ಮೊದಲ ಅಧ್ಯಾಯ ಆಯಾ ವಿಭಾಗದ ಇತಿಹಾಸ, ಭೌಗೋಳಿಕ ಲಕ್ಷಣಗಳು, ಜನಜೀವನ, ಸಂಸ್ಕೃತಿ, ಸಂಪ್ರದಾಯಗಳು ಹಾಗೂ ಆ ವಿಭಾಗದ ಜನಜೀವನವನ್ನು ಶ್ರೀಮಂತಗೊಳಿಸಿದ ವಿವಿಧ ಕ್ಷೇತ್ರಗಳಲ್ಲಿನ ಹಿರಿಯನಾಯಕರ ವಿಚಾರ ಮಾಹಿತಿ

© KTBS NOT TO BE REPUBLISHED

ಇತ್ಯಾದಿಗಳನ್ನು ಕೊಡಲಾಗಿದೆ. ಎನ್‌ಸಿಎಫ್ 2005 ರ ಮಾರ್ಗಸೂಚಿಯಂತೆ ಇತಿಹಾಸ, ಭೂಗೋಳ, ಪೌರನೀತಿ, ಅರ್ಥಶಾಸ್ತ್ರ ಹಾಗೂ ವಾಣಿಜ್ಯಶಾಸ್ತ್ರಗಳ ಅಂಶಗಳನ್ನು 8 ನೇ ತರಗತಿಯಲ್ಲಿ ಸೇರಿಸಲಾಗಿದೆ. ಅನೇಕ ಅವಶ್ಯಕ ವಿಚಾರಗಳನ್ನು ಆವರಣಗಳಲ್ಲಿ ಕೊಡಲಾಗಿದೆ. ಮಕ್ಕಳು ಸ್ವಂತವಾಗಿ ಕಲಿಯುವುದಕ್ಕೆ ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಅನೇಕ ಪ್ರಾಜೆಕ್ಟ್‌ಗಳನ್ನು ಸೂಚಿಸಲಾಗಿದೆ. ಆದರೆ, ಕಂಠಪಾಠ ಮಾಡುವ ಅಂಶಗಳಾದ ಇಸವಿಗಳು, ಅನಾವಶ್ಯಕ ವಿಷಯಗಳನ್ನು ಕಡಿಮೆ ಮಾಡುವುದರ ಮೂಲಕ ಕಲಿಕಾ ಹೊರೆಯನ್ನು ಕಡಿಮೆ ಮಾಡಲಾಗಿದೆ. ಹತ್ತನೇ ತರಗತಿಯ ಪಠ್ಯಪುಸ್ತಕಗಳು ಒಂದು ದೃಷ್ಟಿಯಲ್ಲಿ ವೈಶಿಷ್ಟ್ಯಪೂರ್ಣವಾಗಿವೆ. ಇತರ ಪಠ್ಯಪುಸ್ತಕಗಳಂತೆಯೇ ಈ ಪಠ್ಯಪುಸ್ತಕಗಳು ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಸಾಮರ್ಥ್ಯ ಹಾಗೂ ಕೌಶಲ್ಯಗಳನ್ನು ಬೆಳಸಿಕೊಳ್ಳಲು ಸಹಾಯ ಮಾಡುತ್ತವೆ. ಇದರೊಂದಿಗೆ 10ನೇ ತರಗತಿ ಶಿಕ್ಷಣದ ಒಂದು ಹಂತದ ಅಂತ್ಯದಾಣವಾಗಿರುವುದರಿಂದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಪಬ್ಲಿಕ್ ಪರೀಕ್ಷೆಯನ್ನು ಎದುರಿಸಬೇಕಾಗುತ್ತದೆ.

ಕರ್ನಾಟಕ ಪಠ್ಯಪುಸ್ತಕ ಸಂಘವು ಈ ಪುಸ್ತಕದ ತಯಾರಿಯಲ್ಲಿ ಸಹಕರಿಸಿದ ಸಮಿತಿಯ ಅಧ್ಯಕ್ಷರಿಗೆ, ಸದಸ್ಯರಿಗೆ, ಕಲಾಕಾರರಿಗೆ, ಪರಿಶೀಲಕರಿಗೆ, ಸಂಯೋಜಕ ಅಧಿಕಾರಿಗಳಿಗೆ, ಶಿಕ್ಷಣ ಮಹಾವಿದ್ಯಾಲಯಗಳ ಸಿಬ್ಬಂದಿವರ್ಗದವರಿಗೆ, ಜಿಲ್ಲಾ ತರಬೇತಿ ಸಂಸ್ಥೆಗಳು, ರಾಜ್ಯ ಮಟ್ಟದ ಪಠ್ಯಪುಸ್ತಕ ಸಂಪಾದಕ ಮಂಡಳಿಯ ಸದಸ್ಯರಿಗೆ ಮತ್ತು ಪುಸ್ತಕವನ್ನು ಸುಂದರವಾಗಿ ಮುದ್ರಿಸಿದ ಮುದ್ರಕರಿಗೆ ತನ್ನ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತದೆ.

**ಡಾ. ಜಿ. ಎಸ್. ಮುಡಂಬಡಿತ್ತಾಯ**
ಮುಖ್ಯ ಸಂಯೋಜಕರು
ಪಠ್ಯಪುಸ್ತಕ ಪರಿಷ್ಕರಣೆ ಹಾಗೂ ಪಠ್ಯಪುಸ್ತಕ ರಚನೆ
ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.), ಬೆಂಗಳೂರು

**ನಾಗೇಂದ್ರ ಕುಮಾರ್**
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.),
ಬೆಂಗಳೂರು

@KTBS NOT TO BE REPUBLISHED

## ಅಧ್ಯಕ್ಷರ ನಿವೇದನೆ

ಎಳೆಯರ ಶಿಕ್ಷಣದ ಒಂದು ನಿರ್ದಿಷ್ಟ ಹಾಗೂ ಪ್ರಮುಖ ಹಂತ ಹತ್ತನೆಯ ತರಗತಿಯಾಗಿದೆ. ಅದೇ ರೀತಿ ಕಡ್ಡಾಯ ಹಾಗೂ ಉಚಿತ ಸಾರ್ವತ್ರಿಕ ಶಿಕ್ಷಣದ ಸಾಂವಿಧಾನಿಕ ಹಕ್ಕಿನ ಸೌಲಭ್ಯದ ಪರಿಪೂರ್ಣತೆ ಒದಗಿ ಬರುವುದೂ ಈ ಮಹತ್ತರ ಘಟ್ಟದಲ್ಲಿ. ನಮ್ಮ ನಾಡಿನ ಮಕ್ಕಳು ಮನೆಯಂಗಳದಿಂದ ಹೊರಟು ಪಾಠಶಾಲೆಗೆ ಅಡಿಯಿಡುತ್ತಾ ಹತ್ತು ಸಂವತ್ಸರಗಳನ್ನು ಕಳೆಯುವಲ್ಲಿ ಸಮಾಜದ ಒಳಹೊರಗುಗಳನ್ನು ಚೆನ್ನಾಗಿ ಅರಿತುಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ನಮ್ಮ ಹತ್ತನೆಯ ತರಗತಿಯ ಸಮಾಜ ವಿಜ್ಞಾನ ಪುಸ್ತಕವನ್ನು ರಾಷ್ಟ್ರೀಯ ಪಠ್ಯಕ್ರಮ ನೆಲೆಗಟ್ಟು 2005ರ ಹಿನ್ನೆಲೆಯಲ್ಲಿ ವಿಸ್ತೃತ ಹಾಗೂ ಸರಳವಾಗಿ ರಚಿಸಲು ಯತ್ನಿಸಿದ್ದೇವೆ. ಈ ಪ್ರೌಢಶಾಲಾ ಮಟ್ಟದ ವಿದ್ಯಾರ್ಥಿಗಳು ಕೃಷಿ, ಸ್ವ ಉದ್ಯೋಗ, ವ್ಯಾಪಾರ ಮುಂತಾದ ಹತ್ತು ಹಲವು ಔದ್ಯೋಗಿಕ ಕವಲುಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುತ್ತಾರೆ. ಅದೇ ರೀತಿ ವಿಜ್ಞಾನ, ತಾಂತ್ರಿಕ ಶಿಕ್ಷಣ, ವೈದ್ಯಕೀಯ ಇಂತಹ ಕ್ಷೇತ್ರಗಳಲ್ಲಿ ಪರಿಣತಿಗಾಗಿಯೂ ತೆರಳಲು ಸಾಕಷ್ಟು ವಿದ್ಯಾರ್ಥಿಗಳು ಮುಂದಾಗುತ್ತಾರೆ. ಇವರೆಲ್ಲರಿಗೂ ಸಮಾಜ ವಿಜ್ಞಾನದ ಪರಿಚಯವನ್ನು ಸಾಕಷ್ಟು ಪರಿಣಾಮಕಾರಿಯಾಗಿ ನೀಡುವ ಪ್ರಾಮಾಣಿಕ ಪ್ರಯತ್ನವನ್ನು ಈ ಪಠ್ಯಪುಸ್ತಕದಲ್ಲಿ ಮಾಡಲಾಗಿದೆ. ಅದೇ ರೀತಿ ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಭೂಗೋಳ, ಸಮಾಜಶಾಸ್ತ್ರ, ಹಾಗೂ ವ್ಯವಹಾರ ಅಧ್ಯಯನದ ಬಗೆಗೆ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಹತ್ವದ ಅಂಶಗಳನ್ನು ಸಮಕಾಲೀನ ವಿಚಾರಧಾರೆಯೊಂದಿಗೆ ಸಂಗ್ರಾಹ್ಯವಾಗಿ ವಿದ್ಯಾರ್ಥಿಗಳಿಗೆ ನೀಡಲು ಯತ್ನಿಸಿದ್ದೇವೆ. ಸರಳ ನಿರೂಪಣೆ, ಅಚ್ಚುಕಟ್ಟಾದ ಒಕ್ಕಣೆ, ವಿಶೇಷ ಮಾಹಿತಿಗಳ ಜೋಡಣೆ, ಅವಶ್ಯಕ ಭೂಪಟ, ಸೂಕ್ತ ಕೋಷ್ಟಕ ಮತ್ತು ಚಿತ್ರಗಳೊಂದಿಗೆ ಪಠ್ಯವನ್ನು ನೀಡುವ ಪ್ರಯತ್ನ ಮಾಡಲಾಗಿದೆ.

ಈ ಪಠ್ಯಪುಸ್ತಕವನ್ನು ಕ್ರಮಬದ್ಧವಾಗಿ ಹೊರತರಲು ಸಹಕರಿಸಿದ ಪಠ್ಯಪುಸ್ತಕ ರಚನಾ ಸಮಿತಿಯ ಸದಸ್ಯರಿಗೆ, ಪರಿಶೀಲನಾ ಸಮಿತಿ, ಸಂಪಾದಕ ಮಂಡಳಿ, ಅನುವಾದಕರಿಗೆ ಹಾಗೂ ಸಲಹೆಗಾರರಿಗೆ ನಮ್ಮ ಕೃತಜ್ಞತೆಗಳು.

ಅದೇ ರೀತಿ ಈ ಪಠ್ಯಪುಸ್ತಕ ರಚನೆಗೆ ಆರಂಭದಿಂದಲೂ ಮಾರ್ಗದರ್ಶನವಿತ್ತ ಮುಖ್ಯಸಂಯೋಜಕರಾದ ಡಾ.ಜಿ.ಎಸ್. ಮುಡಂಬಡಿತ್ತಾಯರಿಗೆ ಹಾಗೂ ಎಲ್ಲಾ ರೀತಿಯ ಸಹಕಾರ ನೀಡಿದ ಪಠ್ಯಪುಸ್ತಕ ಸಂಘದ ಅಧಿಕಾರಿಗಳಿಗೆ ನಮ್ಮ ಕೃತಜ್ಞತೆಗಳು.

**ಡಾ. ಎಂ. ಶಶಿಧರ್**
**ಡಾ. ಪಿ. ಅನಂತಕೃಷ್ಣ ಭಟ್**
**ಅಧ್ಯಕ್ಷರು, ಪಠ್ಯಪುಸ್ತಕ ರಚನಾ ಸಮಿತಿ.**

© KTBS NOT TO BE REPUBLISHED

# ರಚನಾ ಸಮಿತಿ

**ಅಧ್ಯಕ್ಷರು**

**ಡಾ. ಎಂ. ಶಶಿಧರ್,** ಸಹ ಪ್ರಾಧ್ಯಾಪಕರು, ಇತಿಹಾಸ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಡಾ. ಪಿ. ಅನಂತಕೃಷ್ಣ ಭಟ್,** ನಿವೃತ್ತ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ಕೆನರಾ ಕಾಲೇಜು, ಮಂಗಳೂರು.

**ಸದಸ್ಯರು**

**ಶ್ರೀ ರಾಮ್‌ಪ್ರಸಾದ್,** ನಿವೃತ್ತ ಪ್ರಾಂಶುಪಾಲರು, ಶ್ರೀ ಎ.ಆರ್.ಎಸ್. ಪ.ಪೂರ್ವ ಕಾಲೇಜು, ಹರಿಹರಪುರ, ಚಿಕ್ಕಮಗಳೂರು ಜಿಲ್ಲೆ

**ಶ್ರೀ ಎನ್. ಸತ್ಯಪ್ರಕಾಶ್,** ನಿ॥ ಮುಖ್ಯಶಿಕ್ಷಕರು, ವಿದ್ಯಾವರ್ಧಕ ಸಂಘ ಪ್ರೌಢಶಾಲೆ, ರಾಜಾಜಿನಗರ, 1ನೇ ಬ್ಲಾಕ್ ಬೆಂಗಳೂರು.

**ಶ್ರೀಮತಿ ಸರಸ್ವತಿ ಹೆಗಡೆ,** ಸಹಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಪೀಣ್ಯ, ಬೆಂಗಳೂರು.

**ಶ್ರೀ ಬಿ.ಎಚ್. ಹನುಮಂತಯ್ಯ,** ಸಹಾಯಕ ಪ್ರಾಧ್ಯಾಪಕರು, ಸಮಾಜಶಾಸ್ತ್ರ ವಿಭಾಗ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಉದಯಪುರ, ಚನ್ನರಾಯಪಟ್ಟಣ ತಾ॥ ಹಾಸನ ಜಿಲ್ಲೆ.

**ಡಾ. ಮಲ್ಲಿಕಾರ್ಜುನ.ಎಸ್.ಬಾಗೇವಾಡಿ,** ಪ್ರಾಧ್ಯಾಪಕರು ಮತ್ತು ಮುಖ್ಯಸ್ತರು, ಭೂಗೋಳಶಾಸ್ತ್ರ ವಿಭಾಗ, ಎ.ಜಿ.ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಮುನವಳ್ಳಿ, ಸವದತ್ತಿ ತಾ॥ ಬೆಳಗಾವಿ ಜಿಲ್ಲೆ.

**ಶ್ರೀ ಜಿ.ಎನ್. ಕೆಂಪಯ್ಯ,** ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವಕಾಲೇಜು, ಮಸ್ಕಲ್ ತುಮಕೂರು ತಾಲ್ಲೂಕು.

**ಶ್ರೀ ಎ.ಎಸ್. ದೀಕ್ಷಿತ್,** ನಿವೃತ್ತ ಪ್ರಾಂಶುಪಾಲರು, ವಾಣಿ ವಿದ್ಯಾಕೇಂದ್ರ, ಬಸವೇಶ್ವರನಗರ, ಬೆಂಗಳೂರು.

**ಪ್ರೊ. ದೊರೈರಾಜ್ ಎಸ್.ಎನ್,** ಪ್ರಾಂಶುಪಾಲರು, ಶೇಷಾದ್ರಿಪುರಂ ಇಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು.

**ಶ್ರೀ ಪಿ. ಪ್ರಸಾದ್,** ಚಿತ್ರಕಲಾ ಶಿಕ್ಷಕರು, ಶ್ರೀ ಭೈರವೇಶ್ವರ ಪ್ರೌಢಶಾಲೆ, ತುಮಕೂರು.

**ಪರಿಶೀಲಕರು**

**ಡಾ. ವಿಜಯ್ ಪೂಣಚ್ಚ ತಂಬಂಡ,** ಪ್ರಾಧ್ಯಾಪಕರು, ಇತಿಹಾಸ ವಿಭಾಗ, ಕನ್ನಡ ವಿಶ್ವವಿದ್ಯಾನಿಲಯ, ಹಂಪಿ, ವಿದ್ಯಾರಣ್ಯ, ಬಳ್ಳಾರಿ.

**ಡಾ. ಟಿ.ಡಿ. ದೇವೇಗೌಡ,** ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ಡೀನ್ (ಅಧ್ಯಯನ ಕೇಂದ್ರಗಳು), ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು.

**ಶ್ರೀ ಚ.ನ. ಶಂಕರ್‌ರಾವ್,** ನಿವೃತ್ತ ಉಪನ್ಯಾಸಕರು, ಕೆನರಾ ಪದವಿ ಪೂರ್ವ ಕಾಲೇಜು, ಮಂಗಳೂರು.

**ಡಾ. ರಂಗನಾಥ,** ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು, ಸ್ನಾತಕೋತ್ತರ ಭೂಗೋಳಶಾಸ್ತ್ರ ವಿಭಾಗ, ಮಹಾರಾಣಿ ಮಹಿಳಾ ಕಲಾ ಮತ್ತು ವಾಣಿಜ್ಯ ಕಾಲೇಜು, ಮೈಸೂರು.

**ಡಾ. ಎಸ್.ಆರ್. ಕೇಶವ,** ಸಹ ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಡಾ. ನೂರ್ ಅಫ್ಜ್,** ಪ್ರಾಧ್ಯಾಪಕರು, ವಾಣಿಜ್ಯ ಮತ್ತು ವ್ಯವಹಾರ ಅಧ್ಯಯನ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಸಂಪಾದಕ ಮಂಡಳಿ**

**ಡಾ. ಎಂ.ವಿ. ಶ್ರೀನಿವಾಸ್,** ನಿವೃತ್ತ ಪ್ರಾಧ್ಯಾಪಕರು, ಇತಿಹಾಸ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

**ಡಾ. ಆರ್.ಎಲ್.ಎಂ. ಪಾಟೀಲ್,** ನಿವೃತ್ತ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಡಾ. ಈಶ್ವರಪ್ಪ,** ಪ್ರಾಧ್ಯಾಪಕರು, ಭೂಗೋಳಶಾಸ್ತ್ರ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಮುಖ್ಯ ಸಂಯೋಜಕರು**

**ಡಾ. ಜಿ. ಎಸ್. ಮುಡಂಬಡಿತ್ತಾಯ,** ಪಠ್ಯಕ್ರಮ ಪರಿಷ್ಕರಣೆ ಮತ್ತು ಪಠ್ಯಪುಸ್ತಕ ರಚನೆ, ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.), ಬೆಂಗಳೂರು.

**ಮುಖ್ಯಸಲಹೆಗಾರರು**

**ಶ್ರೀ ನಾಗೇಂದ್ರ ಕುಮಾರ್,** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.), ಬೆಂಗಳೂರು.

**ಶ್ರೀ ಪಾಂಡುರಂಗ,** ಉಪನಿರ್ದೇಶಕರು (ಪ್ರಭಾರಿ), ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.),ಬೆಂಗಳೂರು.

**ಕಾರ್ಯಕ್ರಮ ಸಂಯೋಜಕರು :**

**ಶ್ರೀ ಎ.ಟಿ. ರಂಗದಾಸಪ್ಪ,** ಹಿರಿಯ ಸಹಾಯಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.),ಬೆಂಗಳೂರು.

© KTBS NOT TO BE REPUBLISHED

# ಪರಿಷ್ಕರಣೆ ಕುರಿತು

ಒಂದರಿಂದ ಹತ್ತನೇ ತರಗತಿಯ ಪಠ್ಯಪುಸ್ತಕಗಳ ಬಗ್ಗೆ ಪ್ರಕಟಗೊಂಡ ಸಾರ್ವಜನಿಕ ಅಭಿಪ್ರಾಯಗಳನ್ನು ಗಮನಿಸಿ ಮಾನ್ಯ ಮುಖ್ಯಮಂತ್ರಿಯವರೂ, ಅರ್ಥಸಚಿವರೂ ಆಗಿರುವ ಶ್ರೀ ಸಿದ್ದರಾಮಯ್ಯನವರು ತಮ್ಮ 2014–15 ರ ಬಜೆಟ್‌ನಲ್ಲಿ ತಜ್ಞರ ಸಮಿತಿಯನ್ನು ರಚಿಸುವ ಘೋಷಣೆ ಮಾಡಿದರು. ತಜ್ಞರು ಅನುಸರಿಸಬೇಕಾದ ಮೂಲ ಆಶಯವನ್ನು ಹೀಗೆ ಹೇಳಿದರು: "ಪಠ್ಯಪುಸ್ತಕಗಳನ್ನು ಸಾಮಾಜಿಕ ಸಾಮರಸ್ಯ, ನೈತಿಕಮೌಲ್ಯಗಳು, ವ್ಯಕ್ತಿತ್ವವಿಕಸನ, ವೈಜ್ಞಾನಿಕ ಮತ್ತು ವೈಚಾರಿಕ ಮನೋಭಾವ, ಜಾತ್ಯತೀತತೆ ಮತ್ತು ರಾಷ್ಟ್ರೀಯ ಬದ್ಧತೆಗಳಿಗೆ ಅನುವಾಗುವಂತೆ ತಜ್ಞರ ಸಮಿತಿಯನ್ನು ಪುನರ್ ರಚಿಸಲಾಗುವುದು" – ಇದು ಬಜೆಟ್ ಭಾಷಣದಲ್ಲಿ ಸಾದರಪಡಿಸಿದ ಆಶಯ.

ಆನಂತರ ಶಿಕ್ಷಣ ಇಲಾಖೆಯು ಒಂದರಿಂದ ಹತ್ತನೇ ತರಗತಿಯವರೆಗಿನ ಪಠ್ಯಪುಸ್ತಕಗಳ ಪರಿಷ್ಕರಣೆಗಾಗಿ 27 ಸಮಿತಿಗಳನ್ನು ರಚಿಸಿ ದಿನಾಂಕ: 24.11.2014 ರಂದು ಆದೇಶ ಹೊರಡಿಸಿತು. ಈ ಸಮಿತಿಗಳು ವಿಷಯವಾರು ಮತ್ತು ತರಗತಿವಾರು ಮಾನದಂಡಕ್ಕನುಗುಣವಾಗಿ ರಚಿತವಾದವು. ವಿವಿಧ ಪಠ್ಯವಿಷಯಗಳಿಗೆ ಸಂಬಂಧಿಸಿದ ತಜ್ಞರು, ಅಧ್ಯಾಪಕರು ಈ ಸಮಿತಿಗಳಲ್ಲಿದ್ದಾರೆ. ಈಗಾಗಲೇ ಲಿಖಿತವಾಗಿ ಬಂದಿರುವ ಅನೇಕ ಆಕ್ಷೇಪಗಳು ಮತ್ತು ವಿಶ್ಲೇಷಣೆಗಳನ್ನು ಪರಿಶೀಲಿಸಿ, ತಪ್ಪು ಒಪ್ಪುಗಳ ಬಗ್ಗೆ ನಿರ್ಣಯಿಸಿ ಪಠ್ಯಪುಸ್ತಕಗಳನ್ನು ಪರಿಷ್ಕರಿಸುವ ಹೊಣೆಹೊತ್ತ ಈ ಸಮಿತಿಗಳಿಗೆ 'ಅಗತ್ಯವಿದ್ದಲ್ಲಿ ಪಠ್ಯವಸ್ತುವನ್ನು ಪರಿಷ್ಕರಿಸಿ ನಂತರ ಪಠ್ಯಪುಸ್ತಕಗಳನ್ನು ಪರಿಷ್ಕರಿಸುವ' ಸ್ವಾತಂತ್ರ್ಯವನ್ನು 24.11.2014ರ ಆದೇಶದಲ್ಲೇ ನೀಡಲಾಗಿತ್ತು. ಆನಂತರ 19.09.2015 ರಂದು ಹೊಸ ಆದೇಶ ಹೊರಡಿಸಿ 'ಅಗತ್ಯವಿದ್ದಲ್ಲಿ ಪುನರ್ ರಚಿಸುವ' ಸ್ವಾತಂತ್ರ್ಯವನ್ನು ನೀಡಲಾಯಿತು. ಹೀಗೆ ಸಮಗ್ರ ಪರಿಷ್ಕರಣೆಗೊಂಡ ಪಠ್ಯಪುಸ್ತಕಗಳನ್ನು 2016–17 ರ ಬದಲು 2017–18ನೇ ಶೈಕ್ಷಣಿಕ ವರ್ಷದಲ್ಲಿ ಜಾರಿಗೊಳಿಸಲಾಗುವುದೆಂದು ಇದೇ ಆದೇಶದಲ್ಲಿ ತಿಳಿಸಲಾಯಿತು.

ಅನೇಕ ವ್ಯಕ್ತಿಗಳೂ ಸಂಘಟನೆಗಳೂ ಸ್ವಯಂಪ್ರೇರಿತರಾಗಿ ಪಠ್ಯಪುಸ್ತಕಗಳ ಮಾಹಿತಿದೋಷ, ಆಶಯದೋಷಗಳನ್ನು ಪಟ್ಟಿಮಾಡಿ ಶಿಕ್ಷಣ ಸಚಿವರಿಗೆ, ಪಠ್ಯಪುಸ್ತಕ ಸಂಘಕ್ಕೆ ಕಳುಹಿಸಿದ್ದರು. ಅವುಗಳ ಪರಿಶೀಲನೆ ಮಾಡಿದ್ದಲ್ಲದೆ, ಸಮಿತಿಗಳಾಚೆಗೆ ಅನೇಕ ಸಂವಾದಗಳನ್ನು ಏರ್ಪಡಿಸಿ ವಿಚಾರ ವಿನಿಮಯ ಮಾಡಿಕೊಂಡಿದ್ದೇವೆ. ಪ್ರಾಥಮಿಕ ಮತ್ತು ಪ್ರೌಢಶಾಲಾ ಅಧ್ಯಾಪಕರ ಸಂಘಗಳ ಜೊತೆ ಚರ್ಚಿಸಿದ್ದಲ್ಲದೆ ಪ್ರಶ್ನಾವಳಿ ಸಿದ್ಧಪಡಿಸಿ ಅಧ್ಯಾಪಕರಿಗೆ ಕಳಿಸಿ ಅಭಿಪ್ರಾಯಗಳನ್ನು ಸಂಗ್ರಹಿಸಲಾಗಿದೆ. ಅಧ್ಯಾಪಕರು, ವಿಷಯ ಪರಿವೀಕ್ಷಕರು ಮತ್ತು ಡಯಟ್ ಪ್ರಾಂಶುಪಾಲರ ಪ್ರತ್ಯೇಕ ಸಭೆಗಳನ್ನು ನಡೆಸಿ ವಿಶ್ಲೇಷಣಾತ್ಮಕ ಅಭಿಮತಗಳನ್ನು ಪಡೆಯಲಾಗಿದೆ. ವಿಜ್ಞಾನ, ಸಮಾಜವಿಜ್ಞಾನ, ಗಣಿತ, ಭಾಷೆ ಸಾಹಿತ್ಯಗಳಿಗೆ ಸಂಬಂಧಿಸಿದ ತಜ್ಞರಿಗೆ ಮೊದಲೇ ಪಠ್ಯಪುಸ್ತಕಗಳನ್ನು ಕಳುಹಿಸಿ ಆನಂತರ ಸಭೆ ನಡೆಸಿ ಚರ್ಚಿಸಲಾಗಿದೆ. ಮಹಿಳಾ ಸಂಘಟನೆ ಹಾಗೂ ವಿಜ್ಞಾನ ಸಂಬಂಧಿ ಸಂಸ್ಥೆಗಳನ್ನು ಆಹ್ವಾನಿಸಿ ಚಿಂತನೆ ನಡೆಸಲಾಗಿದೆ. ಹೀಗೆ ಎಲ್ಲಾ ಮೂಲಗಳಿಂದ ಪಡೆದ ಅರಿವಿನ ಆಧಾರದ ಮೇಲೆ ಪಠ್ಯಪುಸ್ತಕಗಳನ್ನು ಅಗತ್ಯವಿದ್ದಕಡೆ ಪರಿಷ್ಕರಿಸಲಾಗಿದೆ.

ಬಹುಮುಖ್ಯವಾದ ಇನ್ನೊಂದು ಸಂಗತಿಯನ್ನು ಇಲ್ಲಿ ಹೇಳಬೇಕು. ಕೇಂದ್ರೀಯ ಶಾಲಾ (NCERT) ಪಠ್ಯಪುಸ್ತಕಗಳ ಜೊತೆ ರಾಜ್ಯದ ಪಠ್ಯಪುಸ್ತಕಗಳನ್ನು ತೌಲನಿಕವಾಗಿ ಅಧ್ಯಯನ ಮಾಡಿ ಸಲಹೆಗಳನ್ನು ನೀಡಲು ವಿಜ್ಞಾನ, ಗಣಿತ ಮತ್ತು ಸಮಾಜ ವಿಜ್ಞಾನಕ್ಕೆ ಸಂಬಂಧಿಸಿದಂತೆ ತಜ್ಞರ ಮೂರು ಸಮಿತಿಗಳನ್ನು ರಚಿಸಲಾಯಿತು. ಈ ಸಮಿತಿಗಳು ನೀಡಿದ ತೌಲನಿಕ ವಿಶ್ಲೇಷಣೆ ಮತ್ತು ಸಲಹೆಗಳನ್ನು ಆಧರಿಸಿ ರಾಜ್ಯ ಪಠ್ಯಪುಸ್ತಕಗಳ ಗುಣಮಟ್ಟವನ್ನು ಹೆಚ್ಚಿಸಲಾಗಿದೆ. ಕೇಂದ್ರೀಯ ಶಾಲಾ ಪಠ್ಯಪುಸ್ತಕಗಳಿಗಿಂತ ನಮ್ಮ ರಾಜ್ಯದ ಪಠ್ಯಪುಸ್ತಕಗಳ ಗುಣಮಟ್ಟ ಕಡಿಮೆಯಾಗದಂತೆ ಕಾಯ್ದುಕೊಳ್ಳಲಾಗಿದೆ. ಜೊತೆಗೆ ಆಂಧ್ರ, ತಮಿಳುನಾಡು, ಮಹಾರಾಷ್ಟ್ರಗಳ ಪಠ್ಯಪುಸ್ತಕಗಳ ಜೊತೆ ನಮ್ಮ ಪಠ್ಯಪುಸ್ತಕಗಳನ್ನು ಪರಿಶೀಲಿಸಲಾಗಿದೆ.

© KTBS NOT TO BE REPUBLISHED

ಇನ್ನೊಂದು ಸ್ಪಷ್ಟನೆಯನ್ನು ನೀಡಲು ಬಯಸುತ್ತೇನೆ. ನಮ್ಮ ಸಮಿತಿಗಳು ಮಾಡಿರುವುದು ಪರಿಷ್ಕರಣೆಯೇ ಹೊರತು ಪಠ್ಯಪುಸ್ತಕಗಳ ಸಮಗ್ರ ರಚನೆಯಲ್ಲ. ಆದ್ದರಿಂದ ಈಗಾಗಲೇ ರಚಿತವಾಗಿರುವ ಪಠ್ಯಪುಸ್ತಕಗಳ ಸ್ವರೂಪಕ್ಕೆ ಎಲ್ಲಿಯೂ ಧಕ್ಕೆಯುಂಟುಮಾಡಿಲ್ಲ. ಲಿಂಗತ್ವ ಸಮಾನತೆ, ಪ್ರಾದೇಶಿಕ ಪ್ರಾತಿನಿಧ್ಯ, ರಾಷ್ಟ್ರೀಯ ಸಮಗ್ರತೆ, ಸಮಾನತೆ, ಸಾಮಾಜಿಕ ಸಾಮರಸ್ಯಗಳ ಹಿನ್ನೆಲೆಯಲ್ಲಿ ಕೆಲವು ಪರಿಷ್ಕರಣೆಗಳು ನಡೆದಿವೆ. ಹೀಗೆ ಪರಿಷ್ಕರಿಸುವಾಗ ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟು ಮತ್ತು ರಾಜ್ಯ ಪಠ್ಯಕ್ರಮ ಚೌಕಟ್ಟುಗಳನ್ನು ಮೀರಿಲ್ಲವೆಂದು ತಿಳಿಸಬಯಸುತ್ತೇನೆ: ಜೊತೆಗೆ ನಮ್ಮ ಸಂವಿಧಾನದ ಆಶಯಗಳನ್ನು ಅನುಸರಿಸಲಾಗಿದೆ. ಸಮಿತಿಗಳು ಮಾಡಿದ ಪರಿಷ್ಕರಣೆಯನ್ನು ಮತ್ತೊಮ್ಮೆ ಪರಿಶೀಲಿಸಲು ವಿಷಯವಾರು ಉನ್ನತ ಪರಿಶೀಲನ ಸಮಿತಿಗಳನ್ನು ರಚಿಸಿ ಅಭಿಪ್ರಾಯಪಡೆದು ಅಳವಡಿಸಲಾಗಿದೆ.

ಹೀಗೆ ಕ್ರಮಬದ್ಧವಾಗಿ ನಡೆದ ಕೆಲಸಕ್ಕೆ ತಮ್ಮನ್ನು ತಾವು ಸಂಪೂರ್ಣ ತೊಡಗಿಸಿಕೊಂಡ 27 ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯರನ್ನು ಹಾಗೂ ಉನ್ನತ ಪರಿಶೀಲನಾ ಸಮಿತಿಯ ಸಮಸ್ತರನ್ನು ಮತ್ತು ಪರಿಷ್ಕೃತ ಪಾಠಗಳ ರಚನೆ ಮಾಡಿದ ತಜ್ಞರನ್ನು ಕೃತಜ್ಞತೆಯಿಂದ ನೆನೆಯುತ್ತೇವೆ. ಅಂತೆಯೇ ಸಮಿತಿಗಳ ಕೆಲಸ ಸುಗಮವಾಗಿ ನಡೆಯುವಂತೆ ವ್ಯವಸ್ಥೆಮಾಡಲು ಕಾರ್ಯಕ್ರಮ ಅಧಿಕಾರಿಗಳಾಗಿ ನಿಷ್ಠೆಯಿಂದ ದುಡಿದ ಪಠ್ಯಪುಸ್ತಕ ಸಂಘದ ಎಲ್ಲಾ ಅಧಿಕಾರಿಗಳನ್ನೂ ನೆನೆಯುತ್ತೇವೆ. ಸಹಕರಿಸಿದ ಸಿಬ್ಬಂದಿಗೂ ನಮ್ಮ ವಂದನೆಗಳು. ಅಭಿಪ್ರಾಯ ನೀಡಿ ಸಹಕರಿಸಿದ ಸರ್ವ ಸಂಘಟನೆಗಳು ಮತ್ತು ತಜ್ಞರಿಗೆ ಧನ್ಯವಾದಗಳು.

@KTBS
NOT TO BE REPUBLISHED

**ವೀರಣ್ಣ ಎಸ್. ಜತ್ತಿ**
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.)
ಬೆಂಗಳೂರು.

**ಪ್ರೊ. ಬರಗೂರು ರಾಮಚಂದ್ರಪ್ಪ**
ಸರ್ವಾಧ್ಯಕ್ಷರು
ಪಠ್ಯಪುಸ್ತಕ ಪರಿಷ್ಕರಣ ಸಮಿತಿ
ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.)
ಬೆಂಗಳೂರು.

# ಪಠ್ಯಪುಸ್ತಕಗಳ ಪರಿಷ್ಕರಣ ಸಮಿತಿ

**ಸರ್ವಾಧ್ಯಕ್ಷರು**

**ಪ್ರೊ. ಬರಗೂರು ರಾಮಚಂದ್ರಪ್ಪ,** ಅಧ್ಯಕ್ಷರು, ರಾಜ್ಯ ಪಠ್ಯಪುಸ್ತಕ ಪರಿಷ್ಕರಣ ಸಮಿತಿ, ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.), ಬೆಂಗಳೂರು.

**ಅಧ್ಯಕ್ಷರು**

**ಡಾ. ಅಶ್ವತ್ಥ ನಾರಾಯಣ,** ಪ್ರಾಧ್ಯಾಪಕರು, ಇತಿಹಾಸ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮಾನಸ ಗಂಗೋತ್ರಿ ಮೈಸೂರು.

**ಸದಸ್ಯರು**

**ಡಾ. ಅಶ್ವತ್ಥ ನಾರಾಯಣ,** ಪ್ರಾಧ್ಯಾಪಕರು, ಇತಿಹಾಸ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಡಾ. ಜೆ. ಸೋಮಶೇಖರ್,** ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ.

**ಡಾ. ಎಚ್.ಡಿ. ಪ್ರಶಾಂತ್,** ಪ್ರಾಧ್ಯಾಪಕರು, ಅಭಿವೃದ್ಧಿ ಅಧ್ಯಯನ ವಿಭಾಗ, ಕನ್ನಡ ವಿಶ್ವವಿದ್ಯಾಲಯ, ಹಂಪಿ, ವಿದ್ಯಾರಣ್ಯ.

**ಪ್ರೊ. ಎಸ್.ಟಿ. ಬಾಗಲಕೋಟಿ,** ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

**ಪ್ರೊ. ಪಿ ಮಲ್ಲಪ್ಪ,** ನಿವೃತ್ತ ಪ್ರಾಧ್ಯಾಪಕರು, ಭೂಗೋಳಶಾಸ್ತ್ರ ವಿಭಾಗ, ಜೆ.ಎಸ್.ಎಸ್. ಮಹಾವಿದ್ಯಾಲಯ, ಮೈಸೂರು.

**ಡಾ. ಬಿ. ಶೇಖರ್,** ಪ್ರಾಧ್ಯಾಪಕರು, ವಾಣಿಜ್ಯಶಾಸ್ತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಶ್ರೀ ಎ.ಎಸ್. ದೀಕ್ಷಿತ್,** ನಿವೃತ್ತ ಪ್ರಾಂಶುಪಾಲರು, ವಾಣಿ ವಿದ್ಯಾಸಂಸ್ಥೆ, ಬಸವೇಶ್ವರನಗರ, ಬೆಂಗಳೂರು.

**ಶ್ರೀ ಈರಣ್ಣ. ಎಂ. ಅಂಬಿ,** ಸಹ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ತಡಕೊಡು, ಧಾರವಾಡ ತಾ. ಮತ್ತು ಜಿಲ್ಲೆ.

**ಶ್ರೀ ಡಿ.ಎನ್. ವೆಂಕಟೇಶ್,** ಚಿತ್ರಕಲಾ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಉರಮಾರಕಸಲಗೆರೆ, ಮಂಡ್ಯ ತಾ. ಮತ್ತು ಜಿಲ್ಲೆ.

**ಉನ್ನತ ಪರಿಶೀಲನಾ ಸಮಿತಿ**

**ಶ್ರೀ ಅಶೋಕ ಶೆಟ್ಟರ್,** ಸಹ ಪ್ರಾಧ್ಯಾಪಕರು, ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

**ಡಾ. ಎಂ.ಎಸ್. ತಳವಾರ್,** ನಿವೃತ್ತ ಪ್ರಾಧ್ಯಾಪಕರು, ಶಿಕ್ಷಣ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಡಾ. ದಶರಥ್ ನಾಯಕ್,** ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಗುಲ್ಬರ್ಗಾ ವಿಶ್ವವಿದ್ಯಾನಿಲಯ, ಕಲಬುರಗಿ.

**ಡಾ. ಹಸೀನ್ ತಾಜ್,** ಪ್ರಾಧ್ಯಾಪಕರು, ಶಿಕ್ಷಣ ವಿಭಾಗ, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು.

**ಅನುವಾದಕರು**

**ಪ್ರೊ. ಎಸ್.ಟಿ. ಬಾಗಲಕೋಟಿ,** ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

**ಶ್ರೀ ಎ.ಎಸ್. ದೀಕ್ಷಿತ್,** ನಿವೃತ್ತ ಪ್ರಾಂಶುಪಾಲರು, ವಾಣಿ ವಿದ್ಯಾಸಂಸ್ಥೆ, ಬಸವೇಶ್ವರನಗರ, ಬೆಂಗಳೂರು.

**ಸಲಹೆಗಾರರು**

**ಶ್ರೀ ವೀರಣ್ಣ ಎಸ್. ಜತ್ತಿ,** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.), ಬೆಂಗಳೂರು.

**ಶ್ರೀ ಕೋದಂಡರಾಮಯ್ಯ. ಎನ್,** ಉಪನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.), ಬೆಂಗಳೂರು.

**ಕಾರ್ಯಕ್ರಮ ಸಂಯೋಜಕರು**

**ಎನ್. ಎಸ್. ಸೌಮ್ಯ,** ಹಿರಿಯ ಸಹಾಯಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ(ರಿ.), ಬೆಂಗಳೂರು.

© KTBS NOT TO BE REPUBLISHED

# ಪುನರ್ ಪರಿಷ್ಕರಣೆ ಕುರಿತು

2014ರ ಶೈಕ್ಷಣಿಕ ವರ್ಷದಲ್ಲಿ ಪ್ರಕಟವಾದ ಪಠ್ಯಪುಸ್ತಕಗಳು ರಾಜಕೀಯ ಕಾರಣಗಳಿಗಾಗಿ ಅದೇ ವರ್ಷ ಪರಿಷ್ಕರಣೆಗೆ ಒಳಗಾದವು. ಪರಿಷ್ಕೃತ ಪಠ್ಯಪುಸ್ತಕಗಳು 2017–18ರ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಕೈ ತಲುಪಿದವು. ಪರಿಷ್ಕೃತ ಪಠ್ಯಗಳಲ್ಲಾದ ಬದಲಾವಣೆಗಳ ಬಗ್ಗೆ ವ್ಯಾಪಕ ಟೀಕೆ, ವಿಮರ್ಶೆಗಳು ಬಂದವು. ಶಿಕ್ಷಣದ ಮೂಲ ಆಶಯಗಳನ್ನು ಬದಿಗಿಟ್ಟು ಸ್ವಹಿತಾಸಕ್ತಿಯ ಸಿದ್ಧಾಂತಗಳ ಪ್ರಚಾರಕ್ಕೆ ಪಠ್ಯಪುಸ್ತಕಗಳನ್ನು ಬಳಸಿಕೊಳ್ಳಲಾಯಿತೆಂಬ ಆಕ್ಷೇಪ ಎಲ್ಲೆಡೆಯಿಂದ ಕೇಳಿಬಂದ ಹಿನ್ನೆಲೆಯಲ್ಲಿ ಕರ್ನಾಟಕ ಸರಕಾರವು 2021ರಲ್ಲಿ ಈ ಪಠ್ಯಗಳ ಮರುಪರಿಶೀಲನೆ ನಡೆಸುವಂತೆ ಆದೇಶಿಸಿ ಒಂದು ಸಮಿತಿಯನ್ನು ರಚಿಸಿತು. ಈ ಸಮಿತಿಯು ಆಪಾದನೆ ಕೇಳಿಬಂದ ನಿರ್ದಿಷ್ಟ ಪಠ್ಯಪುಸ್ತಕಗಳನ್ನು ಆಮೂಲಾಗ್ರ ಪರಿಶೀಲಿಸಿ ಬದಲಾವಣೆಗಳನ್ನು ಸೂಚಿಸಿದೆ.

ಇಂದಿನ ಮಕ್ಕಳೇ ಮುಂದಿನ ಜನಾಂಗವೆಂಬ ಮಾತಿದೆ. ಶಾಲೆಗಳಲ್ಲಿ ಓದುವ ಇಂದಿನ ಮಕ್ಕಳಿಗೆ ನಾವು ಎಂಥ ಪಠ್ಯಗಳನ್ನು ಬೋಧಿಸುತ್ತೇವೆಂಬುದರ ಮೇಲೆ ಸಮಾಜದ ಭವಿಷ್ಯ ನಿಂತಿದೆ. ವಿದ್ಯಾರ್ಥಿಗಳು ಓದುವ ಪಠ್ಯಗಳು ಆರೋಗ್ಯಕರ ಚಿಂತನೆಗಳನ್ನು ಒಳಗೊಂಡಿರಬೇಕು. ಸಮಾಜದ ವಿವಿಧ ವರ್ಗ–ಸಮುದಾಯಗಳಲ್ಲಿ ಪರಸ್ಪರ ಅಪನಂಬಿಕೆ, ದ್ವೇಷ, ತಾತ್ಸಾರಗಳನ್ನು ಹರಡುವಂತಿರಬಾರದು. ಅವರಲ್ಲಿ ರಾಷ್ಟ್ರೀಯತೆಯನ್ನೂ ದೇಶಪ್ರೇಮವನ್ನೂ ಉದ್ದೀಪಿಸುವಂತಿರಬೇಕು. ರಾಜ್ಯ, ದೇಶಗಳಲ್ಲಿ ಆಗಿಹೋದ ಸಂಗತಿಗಳ ಬಗ್ಗೆ ನಿಖರವಾದ, ವಸ್ತುನಿಷ್ಠವಾದ ಮಾಹಿತಿ ದೊರೆಯುವಂತಿರಬೇಕು. ಅವರಿಗೆ ಸ್ಥಳೀಯ ಸಂಸ್ಕೃತಿ, ಭಾಷೆ, ಜನಪದಗಳ ಪರಿಚಯವಾಗುವಂತಿರಬೇಕು. ಒಟ್ಟಾರೆಯಾಗಿ ಪಠ್ಯಗಳು ವಿದ್ಯಾರ್ಥಿಗಳನ್ನು ಉತ್ತಮ, ಜವಾಬ್ದಾರಿಯುತ, ಪ್ರಜ್ಞಾವಂತ, ಮುಕ್ತ ಮನಸ್ಸಿನ, ಸಭ್ಯ ನಾಗರಿಕರನ್ನಾಗಿ ಮಾಡಬೇಕು. ಆ ಜವಾಬ್ದಾರಿಯನ್ನು ಗಮನದಲ್ಲಿರಿಸಿಕೊಂಡು ಪಾಠಗಳನ್ನು ಪರಿಷ್ಕರಣೆ ಮಾಡಬೇಕಾಯಿತು.

ಪಠ್ಯಪುಸ್ತಕಗಳ ಪರಿಶೀಲನೆ, ಪರಿಷ್ಕರಣೆಗಳಲ್ಲಿ ನಾವು ನಮ್ಮದೇ ಆದ ಚೌಕಟ್ಟನ್ನು ನಿರ್ಮಿಸಿಕೊಂಡೆವು. ಮುಖ್ಯವಾಗಿ ಸಮಾಜ ವಿಜ್ಞಾನದ ಪಠ್ಯಪುಸ್ತಕಗಳಲ್ಲಿ (1) ಯಾವುದೇ ಜಾತಿ, ಧರ್ಮ, ಪಂಥ, ಸಮುದಾಯಗಳಿಗೆ ಅಥವಾ ವ್ಯಕ್ತಿಗಳಿಗೆ ಅಪಮಾನವಾಗುವ ಆಕ್ಷೇಪಾರ್ಹ ಅಂಶಗಳಿರದಂತೆ ಎಚ್ಚರ ವಹಿಸಬೇಕು (2) ವಿಷಯಗಳನ್ನು ಕ್ರಮಬದ್ಧವಾಗಿ, ಕಾಲಪಟ್ಟಿಗನುಗುಣವಾಗಿ ಕೊಡಬೇಕು (3) ಅನಗತ್ಯ ವಿಷಯಗಳು ತುಂಬಿತುಳುಕಾಡುವ ಮಾಹಿತಿಕೋಶವಾಗಿಸದೆ ಜ್ಞಾನಕೋಶಗಳಾಗಿ ಮಾಡಬೇಕು (4) ಸ್ವಹಿತಾಸಕ್ತಿಯ ಯಾವ ಸಿದ್ಧಾಂತಗಳಿಗೂ ಜಾಗ ಕೊಡಕೂಡದು (5) ಅರ್ಧಸತ್ಯ, ಅಸತ್ಯ, ಉತ್ಪ್ರೇಕ್ಷೆ, ನಿರ್ಣಯ ಮುಂತಾದವನ್ನು ಕೈಬಿಟ್ಟು ಅಧಿಕೃತ ಆಧಾರಗಳಿರುವ ಸಂಗತಿಗಳನ್ನಷ್ಟೇ ಮುಂದಿಡಬೇಕು (6) ಎಲ್ಲ ವಿಷಯಗಳಿಗೆ ತಕ್ಕ ಪ್ರಾತಿನಿಧ್ಯ ಕೊಡಬೇಕು (7) ಐತಿಹಾಸಿಕ ಉಪೇಕ್ಷಿತ ಸಂಗತಿಗಳನ್ನು, ಅವುಗಳ ಪ್ರಾಮುಖ್ಯಕ್ಕನುಗುಣವಾಗಿ ಪಠ್ಯಗಳಲ್ಲಿ ತರಬೇಕು (8) ಎಲ್ಲ ಬಗೆಯ ತಪ್ಪುಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ತಗ್ಗಿಸಬೇಕು – ಎಂಬುದು ನಮ್ಮ ಆಶಯವಾಗಿತ್ತು. ಸಮಾಜವಿಜ್ಞಾನ ಪಠ್ಯವು ನಮ್ಮ ವಿದ್ಯಾರ್ಥಿಗಳನ್ನು ದೇಶದ ಬಗ್ಗೆ ಪ್ರೀತಿ ಅಭಿಮಾನಗಳುಳ್ಳ ಪ್ರಜ್ಞಾವಂತ ನಾಗರಿಕರನ್ನಾಗಿ ಮಾಡಬೇಕೇ ಹೊರತು ದೇಶದ ಬಗ್ಗೆ, ದೇಶದೊಳಗಿನ ಹಲವು ಜಾತಿ, ಸಮುದಾಯ, ಭಾಷೆ, ಪಂಥಗಳ ಬಗ್ಗೆ ತಾತ್ಸಾರಭಾವವನ್ನು ತಾಳುವಂಥ ಜನಾಂಗವನ್ನು ಸೃಷ್ಟಿಸಬಾರದು ಎಂಬುದು ಪರಿಷ್ಕರಣೆಯ ಪ್ರತಿಹಂತದಲ್ಲೂ ನಾವು ವಹಿಸಿದ್ದ ಎಚ್ಚರಿಕೆಯಾಗಿತ್ತು.



NOT TO BE REPUBLISHED © KTBS

ಅತ್ಯುತ್ತಮ ಪಠ್ಯಪುಸ್ತಕ ಎಂಬುದು ಒಂದು ಆದರ್ಶಸ್ಥಿತಿ. ಅದರತ್ತ ನಡೆಯುವುದು ನಮ್ಮ ಆಶಯವೇ ಹೊರತು ನೂರಕ್ಕೆ ನೂರು ಅತ್ಯುತ್ತಮವಾದ ಪಠ್ಯಪುಸ್ತಕವನ್ನು ರಚಿಸುವುದು ಸಾಧ್ಯವಿಲ್ಲ. ಆ ವಿನಯದಿಂದಲೇ ನಾವು ಈ ಪುನರ್ ಪರಿಶೀಲನೆಯ ಕಾರ್ಯವನ್ನು ಮುಗಿಸಿ ಪಠ್ಯಗಳನ್ನು ನಿಮ್ಮ ಕೈಗಿಡುತ್ತಿದ್ದೇವೆ. ಇದು ಕೇವಲ ಮರುಪರಿಷ್ಕರಣೆಯೇ ಹೊರತು ಸಮಗ್ರ ಪುನಾರಚನೆಯಲ್ಲ. ಈಗಾಗಲೇ (2014ರಲ್ಲಿ) ರಚಿತವಾಗಿದ್ದ ಪಠ್ಯಪುಸ್ತಕದ ಆಶಯ ಮತ್ತು ಸ್ವರೂಪಕ್ಕೆ ಎಲ್ಲಿಯೂ ಧಕ್ಕೆಯುಂಟುಮಾಡಿಲ್ಲ. ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟು ಮತ್ತು ಅದನ್ನನುಸರಿಸಿ ಬಂದ ರಾಜ್ಯ ಪಠ್ಯಕ್ರಮ ಚೌಕಟ್ಟುಗಳನ್ನು ಮುಂದಿಟ್ಟುಕೊಂಡೇ ಇಡಿಯ ಮರುಪರಿಷ್ಕರಣೆಯ ಕಾರ್ಯ ನಡೆದಿದೆ. ಜೊತೆಗೆ ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯಲಾಗಿದೆ. ಪರಿಷ್ಕರಣೆಯ ಕೆಲಸವನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಿರುವ ಪರಿಶೀಲನಾ ಸಮಿತಿಯ ನನ್ನ ಎಲ್ಲ ಸಹೋದ್ಯೋಗಿಗಳಿಗೆ ನಾನು ಕೃತಜ್ಞ, ಅಂತೆಯೇ ಸಮಿತಿಯ ಕೆಲಸ ಸುಗಮವಾಗಿ ನಡೆಯಲು ಸಹಕರಿಸಿದ ಪಠ್ಯಪುಸ್ತಕ ಸಂಘದ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಗೂ ಆಭಾರಿ. ಈ ಪರಿಷ್ಕರಣೆಯು ಈಗಷ್ಟೇ ಬಂದಿರುವ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಆಶಯಗಳನ್ನು ಹೆಚ್ಚು ಪ್ರತಿಫಲಿಸುತ್ತ, ಮುಂದೆ ಬರಲಿರುವ ಸಮಗ್ರ ಪುನಾರಚಿತ ಪಠ್ಯಗಳಿಗೆ ಪ್ರವೇಶಿಕೆಯಾಗಲಿದೆ ಎಂಬ ಭರವಸೆ ನಮ್ಮದು.

**ವೀರಣ್ಣ ಎಸ್. ಜತ್ತಿ**
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.)
ಬೆಂಗಳೂರು

**ರೋಹಿತ್ ಚಕ್ರತೀರ್ಥ**
ಅಧ್ಯಕ್ಷರು
ಕರ್ನಾಟಕ ಪಠ್ಯಪುಸ್ತಕಗಳ ಪರಿಶೀಲನಾ ಸಮಿತಿ

@KTBS
NOT TO BE REPUBLISHED

## ಪುನರ್ ಪರಿಷ್ಕರಣ ಸಮಿತಿ

### ಅಧ್ಯಕ್ಷರು

ಶ್ರೀ **ರೋಹಿತ್ ಚಕ್ರತೀರ್ಥ,** ಸದಸ್ಯರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.

### ಸದಸ್ಯರು

**ಡಾ. ರಾಜರಾಮ್ ಹೆಗಡೆ,** ನಿವೃತ್ತ ವಿಭಾಗ ಮುಖ್ಯಸ್ಥರು, ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ.

**ಡಾ. ಎನ್. ಸತ್ಯಪ್ರಕಾಶ್,** ನಿವೃತ್ತ ಮುಖ್ಯೋಪಾಧ್ಯಾಯರು, ವಿ.ವಿ.ಎಸ್. ಪ್ರೌಢಶಾಲೆ, ಬೆಂಗಳೂರು.

**ಶ್ರೀ. ರಂಗನಾಥ,** ಪ್ರಾಂಶುಪಾಲರು, ರಾಷ್ಟ್ರೋತ್ಥಾನ ವಿದ್ಯಾಕೇಂದ್ರ, ಹಗರಿಬೊಮ್ಮನಹಳ್ಳಿ, ಬಳ್ಳಾರಿ ಜಿಲ್ಲೆ.

**ಶ್ರೀ. ಬಿ.ಕೆ. ವಾಸುಕಿ,** ಶಿಕ್ಷಕರು, ಭಾರತೀಯ ವಿದ್ಯಾಭವನ ಬಿಬಿಎಂಪಿ ಪಬ್ಲಿಕ್ ಶಾಲೆ, ಬೆಂಗಳೂರು.

**ಡಾ. ಅನಂತಕೃಷ್ಣ ಭಟ್,** ಕೊಡಿಯಾಲಗುತ್ತು, ದ್ವಾರಕ, ಕೊಡಿಯಾಲ್ ಬೈಲ್, ಎರಡನೇ ಅಡ್ಡರಸ್ತೆ, ಮಂಗಳೂರು.

**ಡಾ. ವಿಠ್ಠಲ್ ಪೋತದಾರ,** ಹಿರಿಯ ಸಂಶೋಧನಾ ಸಂಯೋಜಕರು, ದಿ ಮಿಥಿಕ್ ಸೊಸೈಟಿ, ಬೆಂಗಳೂರು.

**ಶ್ರೀ ಕೆ.ಆರ್. ಮಂಜುನಾಥ್,** ಸಹ ಶಿಕ್ಷಕರು, ನ್ಯಾಷನಲ್ ಪ್ರೌಢಶಾಲೆ, ಬೆಂಗಳೂರು.

**ಶ್ರೀಮತಿ ಪಿ. ರಾಧಾ,** ಹಿರಿಯ ಸಹಾಯಕ ನಿರ್ದೇಶಕರು, ಡಿಎಸ್ಇಆರ್‌ಟಿ, ಬನಶಂಕರಿ 3ನೇ ಹಂತ, ಬೆಂಗಳೂರು.

**ಶ್ರೀ ಸಂದೀಪ್ ಕುಮಾರ ಪಿ.ಎಲ್.,** ಜಿ.ಪಿ.ಟಿ., ಸ.ಮಾ.ಪ್ರಾ. ಶಾಲೆ, ಸಿದ್ದನಹೊಸಹಳ್ಳಿ, ಬೆಂಗಳೂರು ಉತ್ತರ ವಲಯ–1.

### ಸಲಹೆಗಾರರು

ಶ್ರೀ ವೀರಣ್ಣ ಎಸ್. ಜತ್ತಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.), ಬೆಂಗಳೂರು.

ಶ್ರೀ **ಕೋದಂಡರಾಮಯ್ಯ. ಎನ್,** ಉಪನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.), ಬೆಂಗಳೂರು.

### ಕಾರ್ಯಕ್ರಮ ಸಂಯೋಜಕರು

**ಎನ್. ಎಸ್. ಸೌಮ್ಯ,** ಹಿರಿಯ ಸಹಾಯಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ (ರಿ.), ಬೆಂಗಳೂರು.

© KTBS NOT TO BE REPUBLISHED

# ಪರಿವಿಡಿ

J3K4H4


| ಅಧ್ಯಾಯದ ಸಂಖ್ಯೆ | ಅಧ್ಯಾಯಗಳು | ಪುಟ ಸಂಖ್ಯೆ |
|---|---|---|
| | **ಇತಿಹಾಸ** | |
| 1. | ಭಾರತಕ್ಕೆ ಯುರೋಪಿಯನ್ನರ ಆಗಮನ | 1 |
| 2. | ಬ್ರಿಟಿಷ್ ಆಳ್ವಿಕೆಯ ವಿಸ್ತರಣೆ | 13 |
| 3. | ಭಾರತದಲ್ಲಿ ಬ್ರಿಟಿಷ್ ಆಳ್ವಿಕೆಯ ಪರಿಣಾಮಗಳು | 19 |
| 4. | ಕರ್ನಾಟಕದಲ್ಲಿ ಬ್ರಿಟಿಷ್ ಆಳ್ವಿಕೆಗೆ ಪ್ರತಿರೋಧಗಳು ಮತ್ತು ಮೈಸೂರಿನ ಒಡೆಯರು | 33 |
| 5. | ಸಾಮಾಜಿಕ ಮತ್ತು ಧಾರ್ಮಿಕ ಸುಧಾರಣಾ ಚಳುವಳಿಗಳು | 49 |
| | **ರಾಜ್ಯಶಾಸ್ತ್ರ** | |
| 6. | ಭಾರತಕ್ಕಿರುವ ಸವಾಲುಗಳು ಹಾಗೂ ಅವುಗಳ ಪರಿಹಾರೋಪಾಯಗಳು | 55 |
| 7. | ಅನ್ಯರಾಷ್ಟ್ರಗಳೊಂದಿಗೆ ಭಾರತದ ಸಂಬಂಧ | 66 |
| | **ಸಮಾಜಶಾಸ್ತ್ರ** | |
| 8. | ಸಾಮಾಜಿಕ ಸ್ತರವಿನ್ಯಾಸ | 69 |
| 9. | ದುಡಿಮೆ ಮತ್ತು ಆರ್ಥಿಕ ಜೀವನ | 73 |
| | **ಭೂಗೋಳಶಾಸ್ತ್ರ** | |
| 10. | ಭಾರತ: ಭೌಗೋಳಿಕ ಸ್ಥಾನ ಹಾಗೂ ಪ್ರಾಕೃತಿಕ ಲಕ್ಷಣಗಳು | 79 |
| 11. | ಭಾರತದ ಋತುಗಳು | 88 |
| 12. | ಭಾರತದ ಮಣ್ಣುಗಳು | 92 |
| 13. | ಭಾರತದ ಅರಣ್ಯಗಳು | 97 |
| 14. | ಭಾರತದ ಜಲಸಂಪನ್ಮೂಲ | 102 |
| | **ಅರ್ಥಶಾಸ್ತ್ರ** | |
| 15. | ಅರ್ಥವ್ಯವಸ್ಥೆ ಮತ್ತು ಸರಕಾರ | 110 |
| | **ವ್ಯವಹಾರ ಅಧ್ಯಯನ** | |
| 16. | ಬ್ಯಾಂಕ್ ವ್ಯವಹಾರಗಳು | 119 |


©KTBS NOT TO BE REPUBLISHED

ಇತಿಹಾಸ

ಅಧ್ಯಾಯ –1

# ಭಾರತಕ್ಕೆ ಯುರೋಪಿಯನ್ನರ ಆಗಮನ

W6Q2E6

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- *ಭಾರತವು ಯುರೋಪಿಯನ್ನರೊಂದಿಗೆ ಹೊಂದಿದ್ದ ವ್ಯಾಪಾರ ಮತ್ತು ವಾಣಿಜ್ಯ ಸಂಬಂಧ.*
- *ಭಾರತಕ್ಕೆ ವ್ಯಾಪಾರಕ್ಕಾಗಿ ಬಂದ ಯುರೋಪಿಯನ್ನರು.*
- *ಯುರೋಪಿಯನ್ನರ ರಾಜಕೀಯ ಏಳಿಗೆಯ ಹಿನ್ನೆಲೆ ಕಾರ್ನಾಟಿಕ್ ಯುದ್ಧಗಳು.*
- *ಪ್ಲಾಸಿಕದನ, ಬಕ್ಸಾರ್ ಕದನ, ದ್ವಿ–ಪ್ರಭುತ್ವ ಪದ್ಧತಿ.*
- *ಬ್ರಿಟಿಷರ ಆಕ್ರಮಣ ನೀತಿ.*

NOT TO BE REPUBLISHED ©KTBS

ಭಾರತ ಮತ್ತು ಯುರೋಪಿನ ನಡುವೆ ಪ್ರಾಚೀನ ಕಾಲದಿಂದಲೂ ವ್ಯಾಪಾರ ಮತ್ತು ವಾಣಿಜ್ಯ ಸಂಬಂಧಗಳು ಏರ್ಪಟ್ಟಿದ್ದವು. ಪ್ರಮುಖವಾಗಿ ಭಾರತದ ಸಾಂಬಾರ ಪದಾರ್ಥಗಳಾದ ಮೆಣಸು, ಜೀರಿಗೆ, ದಾಲ್ಚಿನ್ನಿ, ಏಲಕ್ಕಿ, ಶುಂಠಿ ಮುಂತಾದ ಉತ್ಪನ್ನಗಳಿಗೆ ಯುರೋಪಿನಲ್ಲಿ ಅಪಾರ ಬೇಡಿಕೆ ಇತ್ತು. ಮಧ್ಯಕಾಲದಲ್ಲಿಯೂ ಯುರೋಪ್, ಭಾರತ ಮತ್ತು ಇತರ ಏಷ್ಯಾದ ದೇಶಗಳ ನಡುವೆ ವ್ಯಾಪಾರ ಮುಂದುವರೆಯಿತು. ಏಷ್ಯಾದ ಸರಕುಗಳನ್ನು ಅರಬ್ ವರ್ತಕರು ಪೂರ್ವ ರೋಮನ್ (ಬೈಜಾಂಟಿಯಂ) ಸಾಮ್ರಾಜ್ಯದ ರಾಜಧಾನಿಯಾದ ಕಾನ್‌ಸ್ಟಾಂಟಿನೋಪಲ್ ನಗರಕ್ಕೆ ತಲುಪಿಸುತ್ತಿದ್ದರು. ಅಲ್ಲಿಂದ ಇಟಲಿಯ (ರೋಮನ್ ಸಾಮ್ರಾಜ್ಯದ ಭಾಗ) ವರ್ತಕರು ಅವುಗಳನ್ನು ಕೊಂಡು ಯುರೋಪಿನ ದೇಶಗಳಲ್ಲಿ ಮಾರುತ್ತಿದ್ದರು. ಹೀಗೆ ಕಾನ್‌ಸ್ಟಾಂಟಿನೋಪಲ್ ಅಂತಾರಾಷ್ಟ್ರೀಯ ಸರಕು ವಿನಿಮಯ ಕೇಂದ್ರವಾಗುವ ಮೂಲಕ 'ಯೂರೋಪಿನ ವ್ಯಾಪಾರದ ಹೆಬ್ಬಾಗಿಲೆಂದೇ' ಪರಿಗಣಿಸಲ್ಪಟ್ಟಿತು. ಏಷ್ಯಾ ದೇಶಗಳ ವ್ಯಾಪಾರದ ಮೇಲೆ ಅರಬ್ಬರು ಏಕಸ್ವಾಮ್ಯ ಸಾಧಿಸಿದ್ದರೆ, ಯುರೋಪಿನ ದೇಶಗಳ ವ್ಯಾಪಾರದ ಮೇಲೆ ಇಟಲಿಯ ವರ್ತಕರು ಏಕಸ್ವಾಮ್ಯ ಸಾಧಿಸಿದ್ದರು. ಏಷ್ಯಾದ ಸರಕುಗಳು ಇಟಲಿಯ ವರ್ತಕರಿಗೆ ಒಳ್ಳೆಯ ಲಾಭವನ್ನು ತಂದು ಕೊಡುತ್ತಿದ್ದವು.

**ಕಾನ್‌ಸ್ಟಾಂಟಿನೋಪಲ್ ನಗರದ ವಶ :** ಏಷ್ಯಾ ಮತ್ತು ಯುರೋಪ್ ನಡುವಿನ ವ್ಯಾಪಾರ ಮತ್ತು ವ್ಯವಹಾರಗಳು ಕಾನ್‌ಸ್ಟಾಂಟಿನೋಪಲ್ ನಗರದ ಮೂಲಕ ನಡೆಯುತ್ತಿತ್ತು. 1453ರಲ್ಲಿ ಆಟೋಮಾನ್ ಟರ್ಕರು ಕಾನ್‌ಸ್ಟಾಂಟಿನೋಪಲ್ ನಗರವನ್ನು ವಶಪಡಿಸಿಕೊಂಡರು. ಇದರಿಂದಾಗಿ ಆ ನಗರವನ್ನು ಸಂಧಿಸುವ ಎಲ್ಲಾ ವ್ಯಾಪಾರ ಮಾರ್ಗಗಳು ಟರ್ಕರ ನಿಯಂತ್ರಣಕ್ಕೆ ಹೋದವು. ಹೊಸದಾಗಿ ಸಿಕ್ಕ ಅವಕಾಶದಿಂದ ಟರ್ಕರು ಈ ಮಾರ್ಗದ ವ್ಯಾಪಾರದ ಮೇಲೆ ತೀವ್ರತರದ ತೆರಿಗೆಗಳನ್ನು ವಿಧಿಸತೊಡಗಿದರು. ಪರಿಣಾಮವಾಗಿ ವರ್ತಕರಿಗೆ ಈ ಮಾರ್ಗದ ವ್ಯಾಪಾರವು ಲಾಭದಾಯಕವಾಗಿ ಪರಿಣಮಿಸಲಿಲ್ಲ. ಇದೇ ವೇಳೆ ಇಟಲಿಯ ವರ್ತಕರ ಏಕಸ್ವಾಮ್ಯವನ್ನು ಮುರಿಯಲು ಸ್ಪೇನ್, ಪೋರ್ಚುಗಲ್ ಮೊದಲಾದ ಯುರೋಪಿನ ದೇಶಗಳ ರಾಜರು ಹೊಸ

ಸಮುದ್ರ ಮಾರ್ಗಗಳನ್ನು ಹುಡುಕಲು ಸಾಹಸಿ ನಾವಿಕರನ್ನು ಪ್ರೋತ್ಸಾಹಿಸಲಾರಂಭಿಸಿದರು. ಇದಕ್ಕೆ ಪೂರಕವಾಗಿ ಹೊಸ ವೈಜ್ಞಾನಿಕ ಆವಿಷ್ಕಾರಗಳಾದ ದಿಕ್ಸೂಚಿ, ಆಸ್ಟ್ರೋಲೋಬ್ (ನಕ್ಷತ್ರ ಉನ್ನತಿ ಮಾಪನ), ಸಿಡಿಮದ್ದು, ಮೊದಲಾದವುಗಳು ನೆರವಿಗೆ ಬಂದವು.

**ಭಾರತಕ್ಕೆ ಹೊಸ ಜಲಮಾರ್ಗ :** ಲಿಸ್ಬನ್‌ನಿಂದ ಹೊರಟ ಪೋರ್ಚುಗಲ್ ನಾವಿಕ ವಾಸ್ಕೊಡಗಾಮನು 1498ರಲ್ಲಿ ಭಾರತದ ಪಶ್ಚಿಮ ಕರಾವಳಿ ತೀರದ ಕಲ್ಲಿಕೋಟೆ ಸಮೀಪದ 'ಕಾಪ್ಪಡ್' ಎಂಬಲ್ಲಿಗೆ ಬಂದು ತಲುಪಿದನು. ಆ ಮೂಲಕ ಭಾರತ ಹಾಗೂ ಯುರೋಪ್ ನಡುವೆ ಹೊಸ ಜಲಮಾರ್ಗವನ್ನು ಕಂಡುಹಿಡಿಯುವಲ್ಲಿ ಯಶಸ್ವಿಯಾದನು. ವಾಸ್ಕೋಡಗಾಮನು ಕಂಡುಹಿಡಿದ ಈ ಜಲಮಾರ್ಗವು ಸುಮಾರು ವರ್ಷಗಳ ಕಾಲ ಭಾರತ ಮತ್ತು ಯುರೋಪ್ ನಡುವಿನ ವ್ಯಾಪಾರ ಮಾರ್ಗವಾಗಿ ಮಾರ್ಪಟ್ಟಿತು. ಹೀಗೆ ಭಾರತದೊಂದಿಗೆ ಮರುವ್ಯಾಪಾರ ಸಂಬಂಧವನ್ನು ಸ್ಥಾಪಿಸಿದ ಯುರೋಪಿಯನ್ನರಲ್ಲಿ ಪೋರ್ಚುಗೀಸರು ಮೊದಲಿಗರಾದರು.

***ನಿಮಗಿದು ತಿಳಿದಿರಲಿ:***


*1869ರಲ್ಲಿ ಕೆಂಪುಸಮುದ್ರ ಮತ್ತು ಮೆಡಿಟರೇನಿಯನ್ ಸಮುದ್ರಗಳನ್ನು ಸಂಪರ್ಕಿಸುವಂತೆ ಭೂಮಿ ಅಗೆದು ಹಡಗುಗಳ ಸಂಚಾರಕ್ಕೆ ಅನುಕೂಲವಾಗುವಂತೆ ಭಾರೀ ಕಾಲುವೆಯೊಂದನ್ನು ಈಜಿಪ್ಟ್ ಭೂ ಪ್ರದೇಶದಲ್ಲಿ ನಿರ್ಮಿಸಲಾಯಿತು. ಇದೇ ಪ್ರಸಿದ್ಧ ಸೂಯಜ್ ಕಾಲುವೆ. ಸೂಯಜ್ ಕಾಲುವೆ ನಿರ್ಮಾಣಗೊಳ್ಳುವವರೆಗೂ ವಾಸ್ಕೊಡಗಾಮ ಕಂಡುಹಿಡಿದ ಜಲಮಾರ್ಗವೇ ಭಾರತ ಮತ್ತು ಯುರೋಪ್ ನಡುವಿನ ವ್ಯಾಪಾರ ಮಾರ್ಗವಾಗಿತ್ತು. ಏಕೆಂದರೆ ವಾಸ್ಕೊಡಗಾಮನ ಮಾರ್ಗವಾಗಿ ಹೋಗುವ ನೌಕೆಗಳು ಆಫ್ರಿಕಾದ ದಕ್ಷಿಣ ತುದಿ ಕೇಪ್ ಆಫ್ ಗುಡ್‌ಹೋಪನ್ನು ಬಳಸಿ ಹೋಗಬೇಕಾಗಿತ್ತು.*

## ಯುರೋಪಿನ ವ್ಯಾಪಾರಿ ಕಂಪನಿಗಳು

ಪೋರ್ಚುಗೀಸರ ಯಶಸ್ವಿ ಪ್ರಯತ್ನಗಳಿಂದ ಪ್ರೇರಣೆಗೊಂಡ ಯುರೋಪಿನ ಡಚ್, ಇಂಗ್ಲಿಷ್ ಮತ್ತು ಫ್ರೆಂಚ್ ವ್ಯಾಪಾರಿ ಕಂಪನಿಗಳು ಭಾರತಕ್ಕೆ ಬಂದರು. ಈ ಬೆಳವಣಿಗೆಯು ವಸಾಹತುರಾಷ್ಟ್ರವಾಗಿ ಪರಿವರ್ತನೆಗೊಂಡ ಭಾರತವಲ್ಲದೆ ಅದನ್ನು ವಸಾಹತುವಾಗಿ ಪರಿವರ್ತಿಸಿದ ಯೂರೋಪಿಯನ್ ರಾಷ್ಟ್ರಗಳ ಚರಿತ್ರೆಯನ್ನು ನಿರ್ಣಾಯಕವಾಗಿ ಬದಲಿಸಿತು.

**ಪೋರ್ಚುಗೀಸರು:** ಜಲಮಾರ್ಗದ ಮೂಲಕ ವ್ಯಾಪಾರಕ್ಕಾಗಿ ಭಾರತಕ್ಕೆ ಬಂದ ಮೊಟ್ಟಮೊದಲ ಯುರೋಪಿಯನ್ನರು ಪೋರ್ಚುಗೀಸರೇ ಮತ್ತು ಭಾರತವನ್ನು ತೊರೆದ ಕೊನೆಯ ಯುರೋಪಿಯನ್ನರು ಕೂಡ ಪೋರ್ಚುಗೀಸರೇ ಆಗಿದ್ದಾರೆ. ವಾಸ್ಕೋಡಗಾಮನ ನಂತರ ಪೋರ್ಚುಗೀಸರ ಮೊಟ್ಟಮೊದಲ ವೈಸರಾಯ್ ಆಗಿ ಫ್ರಾನ್ಸಿಸ್ಕೊ ಡಿ ಆಲ್ಮೇಡ ಭಾರತಕ್ಕೆ ಬಂದನು. ಭೂಮಿಯ ಮೇಲಿನ ಅಧಿಪತ್ಯಕ್ಕೆ ಬದಲು ಸಮುದ್ರದ ಮೇಲಿನ ಏಕಸ್ವಾಮ್ಯಕ್ಕಾಗಿ ನೌಕಾಶಕ್ತಿಯನ್ನು ಬಲಪಡಿಸುವ 'ನೀಲಿ ನೀರಿನ ನೀತಿ' (Blue Water Policy)ಯನ್ನು ಜಾರಿಗೆ ತಂದನು. ಆಲ್ಮೇಡನ ನಂತರ ಬಂದ ಆಲ್ಫೋನ್ಸೊ–ಡಿ–ಅಲ್ಬುಕರ್ಕ್ ಭಾರತದಲ್ಲಿ ಪೋರ್ಚುಗೀಸ್ ಸಾಮ್ರಾಜ್ಯದ ನಿಜವಾದ ಸ್ಥಾಪಕನೆಂದು ಪ್ರಸಿದ್ಧನಾಗಿದ್ದಾನೆ. ಇವನು ಸಾಮಾನ್ಯ ಶಕ (ಸಾ.ಶ.) 1510ರಲ್ಲಿ ಬಿಜಾಪುರದ ಸುಲ್ತಾನನಿಂದ ಗೋವಾವನ್ನು ಗೆದ್ದುಕೊಂಡು ಪೋರ್ಚುಗೀಸರ ಆಡಳಿತ ಕೇಂದ್ರವಾಗಿ ಪರಿವರ್ತಿಸಿದನು. ಮುಂದೆ ಒಂದು ಶತಮಾನ ಕಾಲ ಭಾರತದ ವ್ಯಾಪಾರದ ಮೇಲೆ ಪ್ರಶ್ನಾತೀತ ಏಕಸ್ವಾಮ್ಯವನ್ನು ಹೊಂದಿದ್ದ ಪೋರ್ಚುಗೀಸರು ಡಚ್ ಮತ್ತು ಇಂಗ್ಲಿಷರ ಆಗಮನದ ನಂತರ ರಾಜಕೀಯವಾಗಿ ಕಳೆಗುಂದಿದರು.

© KTBS NOT TO BE REPUBLISHED




**ಭಾರತದಲ್ಲಿ ಡಚ್ಚರ ಅಧಿಕಾರ ಹಾಗೂ ಅವನತಿ**

1602ರಲ್ಲಿ ಡಚ್ ಈಸ್ಟ್ ಇಂಡಿಯಾ ಕಂಪೆನಿಯು ಭಾರತಕ್ಕೆ ವ್ಯಾಪಾರಕ್ಕಾಗಿ ಬಂದು ಸೂರತ್, ಬ್ರೋಚ್, ಕಾಂಬೆ, ಕೊಚ್ಚಿನ್, ನಾಗಪಟ್ಟಣ, ಮಚಲೀಪಟ್ಟಣ ಹಾಗೂ ಚಿನ್ಸೂರ ಎಂಬಲ್ಲಿ ವ್ಯಾಪಾರ ಕೇಂದ್ರಗಳನ್ನು ಸ್ಥಾಪಿಸಿದರು. ಕೇರಳದ ರಾಜಕೀಯದಲ್ಲಿ ಅತ್ಯಂತ ಮಹತ್ವದ ಕಾಲಘಟ್ಟದಲ್ಲಿ ಬದುಕಿ, ಅತ್ಯಂತ ಮಹತ್ವದ ಸಂಸ್ಥಾನವೊಂದನ್ನು ಪರಕೀಯರಿಂದ ರಕ್ಷಿಸಿದ ವೈನಾಡ್‌ನ ರಾಜ ಮಾರ್ತಾಂಡ ವರ್ಮ.

1729ರಿಂದ 1758ರ ವರೆಗೆ ವೈನಾಡ್ ಸಂಸ್ಥಾನವನ್ನು ಆಳಿದ ಆತ ತನ್ನ ಸುತ್ತಮುತ್ತಲಿನ ಸಂಸ್ಥಾನಗಳು ಮತ್ತು ಪರಕೀಯ ಡಚ್ಚರಿಂದ ತನ್ನ ಸಂಸ್ಥಾನವನ್ನು ರಕ್ಷಿಸಿದ. ಮುಂದೆ ವೈನಾಡ್ ಸಂಸ್ಥಾನವನ್ನು ಇಡೀ ದೇಶದಲ್ಲಿ ಎದ್ದುಕಾಣುವಂತಹ ರಾಜ್ಯವನ್ನಾಗಿ ಮಾರ್ತಾಂಡ ವರ್ಮ ಕಟ್ಟಿದ. ಕರಿಮೆಣಸಿನ ಆಸೆಯಿಂದ ವಿದೇಶಿಯರು ನಡೆಸಿದ್ದ ನಿರಂತರ ಆಕ್ರಮಣವನ್ನು ಮತ್ತು ಸಾಮ್ರಾಜ್ಯದಾಹವನ್ನು ಮೆಟ್ಟಿನಿಂತ ವೈನಾಡ್ ಅರಸ ಮಾರ್ತಾಂಡ ವರ್ಮ ಆಡಳಿತದಲ್ಲಿ ಅನೇಕ ಸುಧಾರಣೆಗಳನ್ನು ಕೈಗೊಂಡ ರಾಜ. ರಾಜಧಾನಿಯನ್ನು ಪದ್ಮನಾಭಪುರದಿಂದ ತಿರುವನಂತಪುರಕ್ಕೆ ಸ್ಥಳಾಂತರಿಸಿದ. ಆತ ತನ್ನ ಸಂಸ್ಥಾನವನ್ನು ವಿಶ್ವ ತಿರುವಾಂಕೂರು ಸಂಸ್ಥಾನ ಎಂದು ಹೆಸರಾಗುವಂತೆ ಮಾಡಿದ.

ಮಾರ್ತಾಂಡ ವರ್ಮ ಆಡಳಿತಕ್ಕೆ ಬರುವ ಮುಂಚೆ ವೈನಾಡ್ ಸಂಸ್ಥಾನದಲ್ಲಿ ಅನೇಕ ಗೊಂದಲಗಳು ಮತ್ತು ಅವ್ಯವಸ್ಥೆಗಳು ಮನೆಮಾಡಿದ್ದವು. ವೈನಾಡಿನ ಅರಸನಾಗಿದ್ದ ರಾಮವರ್ಮನೆಂಬುವನು ಅತ್ಯಂತ ದುರ್ಬಲ ಅರಸನಾಗಿದ್ದ. ಡಚ್ ಈಸ್ಟ್ ಇಂಡಿಯಾ ಕಂಪನಿ ಅತ್ಯಂತ ಪ್ರಬಲ ಸೈನಿಕ ಶಕ್ತಿಯನ್ನು ಹೊಂದಿ ರಾಜಕೀಯ ಮಹತ್ವಾಕಾಂಕ್ಷೆಯ ಶಕ್ತಿಯಾಗಿತ್ತು. ಜೊತೆಗೆ ವೈನಾಡಿನ ಸುತ್ತಮುತ್ತಲ ಸಂಸ್ಥಾನಗಳು ಅತ್ಯಂತ ಬಲಿಷ್ಠವಾಗಿದ್ದವು. ಅಲ್ಲದೆ ವೈನಾಡಿನ ಪಾಳೆಗಾರರು ಸಂಸ್ಥಾನದ ಅಸಲಿ ಶಕ್ತಿಯಾಗಿ ರಾಜನನ್ನು ದುರ್ಬಲಗೊಳಿಸಿದ್ದರು. ತನ್ನ ಸೋದರ ಮಾವನೂ ಆಗಿದ್ದ ರಾಮವರ್ಮನಿಗೆ ತನ್ನ 10ನೇ ವಯಸ್ಸಿನಲ್ಲಿಯೇ ಮಾರ್ತಾಂಡ ವರ್ಮನು ತಮ್ಮ ಸಂಸ್ಥಾನದ ಶ್ರೇಯಸ್ಸಿಗೆ ಉಪಾಯವನ್ನು ಹೇಳಿಕೊಡುತ್ತಾನೆ. ಅದರಂತೆ ರಾಮವರ್ಮ ಮಧುರೈಯ ಪಾಂಡ್ಯರನ್ನು ಸಂಪರ್ಕಿಸುತ್ತಾನೆ. ಇದರ ಪರಿಣಾಮ ಸಂಸ್ಥಾನದ ಪಾಳೆಗಾರರು ಮೆತ್ತಗಾಗುತ್ತಾರೆ. ಹೀಗೆ ಮಾರ್ತಾಂಡ ವರ್ಮ ಬಾಲ್ಯದಿಂದಲೇ ಗಮನ ಸೆಳೆಯುತ್ತಾನೆ.

ರಾಮವರ್ಮನ ನಂತರ ತನ್ನ 24ನೇ ವಯಸ್ಸಿನಲ್ಲಿ ಮಾರ್ತಾಂಡ ವರ್ಮ ಪಟ್ಟಕ್ಕೆ ಬಂದನು. ವೈನಾಡ್ ಸಂಸ್ಥಾನದ ಗಡಿಯನ್ನು ವಿಸ್ತರಿಸಲು 50 ಸಾವಿರ ಸೈನಿಕರ ಸೈನ್ಯವನ್ನು ಕಟ್ಟಿದನು. ಮೆಣಸು ಬೆಳೆಯುವ ಪ್ರದೇಶಗಳನ್ನು ತನ್ನ ಕೈವಶ ಮಾಡಿಕೊಂಡನು. ಅದಾಗಲೇ ಕರಿಮೆಣಸಿನ ವ್ಯಾಪಾರದಲ್ಲಿ ಹಿಡಿತ ಸಾಧಿಸುತ್ತಿದ್ದ ಡಚ್ಚರನ್ನು ಸದೆಬಡಿಯಲು ಅನೇಕ ರಣತಂತ್ರಗಳನ್ನು ಮಾರ್ತಾಂಡ ವರ್ಮನು ಹೆಣೆದನು. ಸುತ್ತಮುತ್ತಲಿನ ಪಾಳೆಗಾರರು ಮತ್ತು ಸಂಸ್ಥಾನಿಕರನ್ನು ತನ್ನ ಹಿಡಿತದಲ್ಲಿಟ್ಟುಕೊಂಡು ಅವರನ್ನು ಡಚ್ಚರ ವಿರುದ್ಧ ನಿಲ್ಲಿಸಿದನು. ಕಾಯಂಕುಳಂ, ಕೊಚ್ಚಿ, ಪುರಕ್ಕಾಡ್ ಮತ್ತು ವಡಕ್ಕುಂಕೂರ್ ಸಂಸ್ಥಾನಗಳ ಜೊತೆಗೂಡಿ ಡಚ್ ಸೇನೆಯು ತಿರುವಾಂಕೂರಿನ ಮೇಲೆ ಆಕ್ರಮಣ ಮಾಡಿದಾಗ ಮಾರ್ತಾಂಡ ವರ್ಮನ ಪಡೆ ಡಚ್ ಕೂಟವನ್ನು ಸೋಲಿಸಿ ನೆಡುಮಂಗಡ ಮತ್ತು ಕೊಟ್ಟಾರಕರ ಎಂಬ ವ್ಯಾಪಾರಿ ಕೇಂದ್ರವನ್ನು ವಶಪಡಿಸಿಕೊಂಡಿತು. ಅಲ್ಲದೆ ಮಾರ್ತಾಂಡ ವರ್ಮನು "ನಾವೆಂದೂ ಮೆಣಸಿನ ವ್ಯಾಪಾರದ ಹಕ್ಕನ್ನು ಪರಕೀಯರಿಗೆ ಬಿಟ್ಟು ಕೊಡೆವು" ಎಂದು ಡಚ್ಚರಿಗೆ ಖಾರವಾಗಿ ಪತ್ರ ಬರೆದನು.

1741ರಲ್ಲಿ ಡಚ್ ಈಸ್ಟ್ ಇಂಡಿಯಾ ಕಂಪನಿ ಕೊಟ್ಟಾರಕರ ಸಂಸ್ಥಾನವನ್ನು ಮುಂದಿಟ್ಟುಕೊಂಡು ತಿರುವಾಂಕೂರಿನ ಮೇಲೆ ಯುದ್ಧವನ್ನು ಸಾರಿತು. ಡಚ್ಚರ ಜೊತೆಗೆ ಸ್ಥಳೀಯ ಸಂಸ್ಥಾನಗಳೂ ಸೇರಿಕೊಂಡಿದ್ದರು. ಆದರೆ ಮಾರ್ತಾಂಡ ವರ್ಮನ ಸೈನ್ಯ ಆ ದಾಳಿಯನ್ನು ಸಮರ್ಥವಾಗಿ ಹಿಮ್ಮೆಟ್ಟಿಸಿತು. ಡಚ್ ಪಡೆಗಳು ಕೊಚ್ಚಿನ್‌ಗೆ ಹಿಂತಿರುಗಿದವು. ಆದರೆ ಡಚ್ಚರು ಸಿಲೋನಿನಿಂದ ಮತ್ತಷ್ಟು ಪಡೆಗಳನ್ನು ಕರೆಸಿಕೊಂಡು ಮಾರ್ತಾಂಡ ವರ್ಮನ ಮೇಲೆ ದಂಡೆತ್ತಿ ಬಂದರು. 1741ರ ಆಗಸ್ಟ್ 10ರಂದು ಕೊಳಚ್ಚಲ್ ಎಂಬಲ್ಲಿ ಮಾರ್ತಾಂಡ ವರ್ಮ ಮತ್ತು ಡಚ್ಚರ ನಡುವೆ ನಾಲ್ಕು ದಿನಗಳ ಕಾಲ ಭೀಕರ ಕದನ ನಡೆಯಿತು. ಅಂತಿಮವಾಗಿ ತಿರುವಾಂಕೂರು ಸೈನ್ಯ ಯುದ್ಧದಲ್ಲಿ ಮೇಲುಗೈ ಸಾಧಿಸಿತು. 24 ಪ್ರಮುಖ ಡಚ್ ಅಧಿಕಾರಿಗಳು ಯುದ್ಧಖೈದಿಗಳಾದರು. ಡಚ್ಚರು ಅಪಾರ ಪ್ರಮಾಣದಲ್ಲಿ ನಷ್ಟವನ್ನು ಅನುಭವಿಸಿದರು. ಈ ಯುದ್ಧದ ನಂತರ ಮಾರ್ತಾಂಡ ವರ್ಮ ಸುಮ್ಮನೆ ಕೂರಲಿಲ್ಲ. ಇಡೀ ದಕ್ಷಿಣ ಭಾರತದಿಂದ ಡಚ್ಚರನ್ನು ಕಿತ್ತೊಗೆಯಬೇಕೆಂದು ಪಣತೊಟ್ಟ. ಕೇರಳ ಮತ್ತು ತಮಿಳುನಾಡಿನಲ್ಲಿ ಮೆಣಸಿನ ವ್ಯಾಪಾರದಲ್ಲಿ ಹಕ್ಕನ್ನು ಸ್ಥಾಪಿಸಿದ. ಡಚ್ಚರ ಹಿಡಿತದಲ್ಲಿದ್ದ ಬಂದರುಗಳನ್ನು ಮರಳಿ ಪಡೆದ.

© KTBS NOT TO BE REPUBLISHED

ಮಾರ್ತಾಂಡ ವರ್ಮನ ಆಳ್ವಿಕೆಯಲ್ಲಿ ಕೊಚ್ಚಿ ವಿಶ್ವದ ಪ್ರಮುಖ ಸಾಂಬಾರ ಪದಾರ್ಥಗಳ ಕೇಂದ್ರವಾಗಿ ಗುರುತಿಸಲ್ಪಟ್ಟಿತು. ತಿರುವಾಂಕೂರು ಸಂಸ್ಥಾನ ಅತ್ಯಂತ ಶ್ರೀಮಂತ ಸಂಸ್ಥಾನವಾಯಿತು. ಅಂತಿಮವಾಗಿ 1753ರ ಆಗಸ್ಟ್ 15ರಂದು ನಡೆದ ಒಪ್ಪಂದದಲ್ಲಿ ಡಚ್ ಪಡೆಗಳು ತಮ್ಮ ಸಂಪೂರ್ಣ ಅಧಿಕಾರವನ್ನು ತಿರುವಾಂಕೂರಿಗೆ ಒಪ್ಪಿಸಿ ಶರಣಾದವು. ಹೀಗೆ ಮಾರ್ತಾಂಡ ವರ್ಮನ ಆಡಳಿತ ಭಾರತದ ಇತಿಹಾಸದಲ್ಲಿ ಪ್ರಮುಖ ಕಾಲಘಟ್ಟವಾಗಿ ಗುರುತಿಸಲ್ಪಡುತ್ತದೆ.

ಭಾರತದಲ್ಲಿ ಇಂಗ್ಲಿಷರ ಏಳಿಗೆ ಮತ್ತು ಡಚ್ಚರು ಆಗ್ನೇಯ ಏಷ್ಯಾದಲ್ಲಿ ವಶಪಡಿಸಿಕೊಂಡ ದ್ವೀಪಗಳಲ್ಲಿ ಹೆಚ್ಚು ಆಸಕ್ತರಾಗಿದ್ದುದು ಭಾರತದಲ್ಲಿ ಡಚ್ಚರ ಅಧಿಕಾರದ ಅವನತಿಗೆ ಕಾರಣವಾದವು.

***ನಿಮಗಿದು ತಿಳಿದಿರಲಿ :*** *ಕೋಠಿಗಳು ವ್ಯಾಪಾರಿ ವಸ್ತುಗಳ ದಾಸ್ತಾನುಗಳು ಅಥವಾ ಮಳಿಗೆಗಳಾಗಿದ್ದವು. ಕೋಠಿಯ ಸುತ್ತ ತಮ್ಮ ರಕ್ಷಣೆಗಾಗಿ ಎತ್ತರದ ತಡೆಗೋಡೆಗಳನ್ನು ಕಟ್ಟಿಕೊಂಡರು.*

**ಇಂಗ್ಲಿಷರು :** ಇಂಗ್ಲೆಂಡಿನ ಎಲಿಜಬೆತ್ ರಾಣಿಯು ಸಾ.ಶ. 1600 ಡಿಸೆಂಬರ್ 31ರಂದು ಇಂಗ್ಲಿಷ್ ಈಸ್ಟ್ ಇಂಡಿಯಾ ಕಂಪನಿಗೆ ಪೂರ್ವದೇಶಗಳೊಂದಿಗೆ ವ್ಯಾಪಾರ ನಡೆಸಲು 15 ವರ್ಷಗಳ ಪರವಾನಗಿ ನೀಡಿದಳು. ಈ ಕಂಪನಿಯು 1613ರಲ್ಲಿ ಔಪಚಾರಿಕವಾಗಿ ವ್ಯಾಪಾರವನ್ನು ಆರಂಭಿಸಿತು. ಕಂಪನಿಗೆ ಮೊಘಲ್ ಸಾಮ್ರಾಟನಾದ ಜಹಾಂಗೀರನು ಸೂರತ್‌ನಲ್ಲಿ ಮೊದಲ ಫ್ಯಾಕ್ಟರಿ ಅಥವಾ ದಾಸ್ತಾನು ಮಳಿಗೆ (Factory or Warehouses)ಯನ್ನು ತೆರೆಯಲು ಫರ್ಮಾನ್ ನೀಡಿದನು. 1617ರಲ್ಲಿ ಇಂಗ್ಲೆಂಡಿನ ರಾಜ ಒಂದನೆಯ ಜೇಮ್ಸ್‌ನ ರಾಯಭಾರಿಯಾಗಿ ಜಹಾಂಗೀರನ ಆಸ್ಥಾನಕ್ಕೆ ಸರ್. ಥಾಮಸ್ ರೋ ಬಂದನು. ಇವನು ಜಹಾಂಗೀರನಿಂದ ಮೊಘಲ್ ಸಾಮ್ರಾಜ್ಯದ ಕೆಲವೆಡೆಗಳಲ್ಲಿ ಫ್ಯಾಕ್ಟರಿಗಳನ್ನು ಸ್ಥಾಪಿಸಲು ಅನುಮತಿ ಪಡೆದನು. ಅದರಂತೆ ಇಂಗ್ಲಿಷರು ಆಗ್ರಾ, ಅಹಮದಾಬಾದ್ ಮತ್ತು ಬ್ರೋಚ್‌ಗಳಲ್ಲಿ ಫ್ಯಾಕ್ಟರಿಗಳನ್ನು ನಿರ್ಮಿಸಿದರು. ಇಂಗ್ಲಿಷರು 1639ರಲ್ಲಿ ಚಂದ್ರಗಿರಿಯ ರಾಜನಿಂದ ಮದ್ರಾಸ್‌ನಲ್ಲಿ ಭೂಮಿಯನ್ನು ಪಡೆದು ಸೆಂಟ್ ಜಾರ್ಜ್ ಫೋರ್ಟ್ ಎಂಬ ಬಲಿಷ್ಠ ಕೋಟೆಯನ್ನು ಕಟ್ಟಿದರು. ಮುಂದೆ ಇಂಗ್ಲೆಂಡಿನ ರಾಜಕುಮಾರ ಎರಡನೇ ಚಾರ್ಲ್ಸ್‌ನು ಬಾಂಬೆಯನ್ನು 1668ರಲ್ಲಿ ಕಂಪನಿಗೆ ವಾರ್ಷಿಕ 10 ಪೌಂಡುಗಳ ಬಾಡಿಗೆಗೆ ವಹಿಸಿಕೊಟ್ಟನು. ಬ್ರಿಟಿಷರು 1690ರ ದಶಕದಲ್ಲಿ ಬಂಗಾಳದ ರಾಜ್ಯಪಾಲನಿಂದ ಹೂಗ್ಲಿ ನದಿ ದಂಡೆಯ ಮೇಲೆ ಸುತನುತಿ, ಕಲ್ಕತ್ತ ಮತ್ತು ಗೋವಿಂದಪುರ ಎಂಬ ಮೂರು ಹಳ್ಳಿಗಳನ್ನು ಖರೀದಿಸಿ ಫೋರ್ಟ್ ವಿಲಿಯಂ ಎಂಬ ಕೋಟೆಯನ್ನು ಕಟ್ಟಿದರು. ಇದರ ಸುತ್ತ ಕಲ್ಕತ್ತಾ ನಗರ ಬೆಳೆಯಿತು. 17ನೆಯ ಶತಮಾನದ ಅಂತ್ಯದ ವೇಳೆಗೆ ಇಂಗ್ಲಿಷರು ಮದ್ರಾಸ್, ಬಾಂಬೆ ಮತ್ತು ಕಲ್ಕತ್ತಗಳನ್ನು ತಮ್ಮ ಪ್ರೆಸಿಡೆನ್ಸಿ ಕೇಂದ್ರಗಳನ್ನು ಮಾಡಿಕೊಂಡರು. ಹದಿನೆಂಟನೆಯ ಶತಮಾನದ ಉತ್ತರಾರ್ಧದಲ್ಲಿ ಇಂಗ್ಲಿಷರು ಕಲ್ಕತ್ತಾವನ್ನು ತಮ್ಮ ರಾಜಧಾನಿಯನ್ನಾಗಿ ಮಾಡಿಕೊಂಡರು. ತಮ್ಮ ಅಧೀನದಲ್ಲಿದ್ದ ಪ್ರದೇಶಗಳಲ್ಲಿ ತಮ್ಮದೇ ನಾಗರಿಕ ಮತ್ತು ಅಪರಾಧ ಕಾನೂನುಗಳನ್ನು (Civil and Criminal Proceduse Codes) ಜಾರಿಗೆ ತಂದರು.

**ಫ್ರೆಂಚರು :** ಫ್ರೆಂಚ್ ಈಸ್ಟ್ ಇಂಡಿಯಾ ಕಂಪನಿಯು 1664ರಲ್ಲಿ ಸರ್ಕಾರಿ ಒಡೆತನದ ಕಂಪನಿಯಾಗಿ ಆರಂಭವಾಯಿತು. ಇದು 1668ರಲ್ಲಿ ತನ್ನ ಪ್ರಪ್ರಥಮ ದಾಸ್ತಾನುಮಳಿಗೆ(ಕೋಠಿ)ಯನ್ನು ಸೂರತ್‌ನಲ್ಲಿ ಆರಂಭಿಸಿತು. ನಂತರ ಮಚಲಿಪಟ್ಟಣ, ಚಂದ್ರನಗರ, ಮಾಹೆ, ಕಾರೈಕಲ್ಲು, ಕಾಸಿಂಬಜಾರ್, ಬಾಲಸೂರ್‌ಗಳನ್ನು ತಮ್ಮ ಕೇಂದ್ರಗಳಾಗಿ ಮಾಡಿಕೊಂಡರು. ಫ್ರೆಂಚರು 1674ರಲ್ಲಿ ವಾಲಿಕೊಂಡಪುರಂನ ಸ್ಥಳೀಯ ಮುಸ್ಲಿಂ ಅಧಿಕಾರಿಯಿಂದ ಪಡೆದರು. ಕ್ರಮೇಣ ಇದನ್ನೆ ದೊಡ್ಡ ವ್ಯಾಪಾರ ಕೇಂದ್ರವಾಗಿ ಮಾರ್ಪಡಿಸಿ ತಮ್ಮ ರಾಜಧಾನಿಯನ್ನಾಗಿ ಮಾಡಿಕೊಂಡರು.

© KTBS NOT TO BE REPUBLISHED

ಅದೇ ಪುದುಚೇರಿ ಅಥವಾ ಪಾಂಡಿಚೇರಿ. ಇದು ಫ್ರೆಂಚರು ಭಾರತ ತೊರೆದು ಹೋಗುವವರೆಗೆ ಅವರ ರಾಜಧಾನಿಯಾಗಿತ್ತು. 1746ರಲ್ಲಿ ಪಾಂಡಿಚೇರಿಯ ಗವರ್ನರ್ ಆಗಿ ಬಂದ ಡೂಪ್ಲೆ ಎಂಬ ಮಹತ್ವಾಕಾಂಕ್ಷಿ ಅಧಿಕಾರಿಯು ದಕ್ಷಿಣ ಭಾರತದಲ್ಲಿ ಫ್ರೆಂಚರ ಅಧಿಪತ್ಯವನ್ನು ಸ್ಥಾಪಿಸಲು ಹವಣಿಸಿದನು. ಇದು ಇಂಗ್ಲಿಷರೊಡನೆ ಸಂಘರ್ಷಕ್ಕಿಳಿದು ಕಾರ್ನಾಟಿಕ್ ಯುದ್ಧಗಳಿಗೆ ಕಾರಣವಾಯಿತು.

## ಬ್ರಿಟಿಷರು ಮತ್ತು ಫ್ರೆಂಚರ ನಡುವೆ ಪ್ರತಿಸ್ಪರ್ಧೆ

ಪೋರ್ಚುಗೀಸರು ಮತ್ತು ಡಚ್ಚರು 18ನೆಯ ಶತಮಾನದ ಮಧ್ಯಂತರದ ಹೊತ್ತಿಗೆ ಬ್ರಿಟಿಷರು ಮತ್ತು ಫ್ರೆಂಚರ ಪೈಪೋಟಿಯನ್ನು ಎದುರಿಸಲಾಗದೆ ಭಾರತದ ರಾಜಕೀಯ ರಂಗದಿಂದ ಹಿಂದೆ ಸರಿದರು. ಅಂತಿಮವಾಗಿ ಕಣದಲ್ಲಿ ಉಳಿದ ಬ್ರಿಟಿಷರು ಮತ್ತು ಫ್ರೆಂಚರು ದಕ್ಷಿಣ ಭಾರತದಲ್ಲಿ ತಮ್ಮ ರಾಜಕೀಯ ಪ್ರಭಾವವನ್ನು ಉಳಿಸಿಕೊಳ್ಳುವ ಸಲುವಾಗಿ ಶಕ್ತಿ ಪ್ರದರ್ಶನಕ್ಕೆ ಮುಂದಾದರು. ಇದೇ ಸಂದರ್ಭದಲ್ಲಿ ಹೈದರಾಬಾದ್ ಸಂಸ್ಥಾನ ಮತ್ತು ಕಾರ್ನಾಟಿಕ್ (ತಮಿಳುನಾಡಿನ ಪೂರ್ವಭಾಗ) ಪ್ರಾಂತ್ಯದಲ್ಲಿನ ರಾಜಕೀಯ ಅಸ್ಥಿರತೆಯ ಲಾಭ ಪಡೆಯಲು ಫ್ರೆಂಚರು ಮತ್ತು ಬ್ರಿಟಿಷರು ಯತ್ನಿಸಿದರು. ಅದರ ಪರಿಣಾಮವಾಗಿಯೇ ಮೂರು ಕಾರ್ನಾಟಿಕ್ ಯುದ್ಧಗಳು ನಡೆದವು.

***ನಿಮಗಿದು ತಿಳಿದಿರಲಿ:*** *1724ರಲ್ಲಿ ಹೈದರಾಬಾದ್ ಸಂಸ್ಥಾನವನ್ನು 'ಅಸಫ್ ಜಾ' ಸ್ಥಾಪಿಸಿದನು. ಇವನ ಅಧೀನದಲ್ಲಿ ಕಾರ್ನಾಟಿಕ್ ಪ್ರಾಂತ್ಯವನ್ನು ಆಳುತ್ತಿದ್ದ 'ದೋಸ್ತ್ ಅಲಿ' ಎಂಬಾತನು 'ಅಸಫ್ ಜಾ'ಗೆ ನಿಷ್ಠನಾಗಿರಲಿಲ್ಲ. 1740ರಲ್ಲಿ ಮರಾಠರು ಕಾರ್ನಾಟಿಕ್ ಪ್ರಾಂತ್ಯವನ್ನು ಲೂಟಿ ಮಾಡಿ ದೋಸ್ತ್ ಅಲಿಯನ್ನು ಕೊಂದು, ಅವನ ಅಳಿಯ ಚಂದಾಸಾಹೇಬನನ್ನು ಸತಾರದಲ್ಲಿ ಸೆರೆಯಲ್ಲಿಟ್ಟರು. ಆಗ ಅಸಫ್ ಜಾ ತನ್ನ ನಂಬಿಕಸ್ಥ ವ್ಯಕ್ತಿಯಾದ ಅನ್ವರುದ್ದೀನನನ್ನು ಕಾರ್ನಾಟಿಕದ ನವಾಬನನ್ನಾಗಿ ನೇಮಿಸಿದನು.*

**ಮೊದಲ ಕಾರ್ನಾಟಿಕ್ ಯುದ್ಧ (1746–48) :** ಡೂಪ್ಲೆಯ ಕೋರಿಕೆಯ ಮೇರೆಗೆ ಲಾಬೋರ್ಡಿನಾ ಎಂಬ ಫ್ರೆಂಚ್ ಸೇನಾ ಮುಖ್ಯಸ್ಥನು ಮಾರಿಷಸ್‌ನಿಂದ ಬಂದು ಬ್ರಿಟಿಷರಿಂದ ಮದ್ರಾಸನ್ನು ವಶಪಡಿಸಿಕೊಂಡನು. ಅಸಹಾಯಕರಾದ ಬ್ರಿಟಿಷರು ಕಾರ್ನಾಟಿಕ್ ನವಾಬನಾದ ಅನ್ವರುದ್ದೀನನಲ್ಲಿ ಮೊರೆ ಇಟ್ಟರು. ಮದ್ರಾಸ್‌ನಿಂದ ಫ್ರೆಂಚರನ್ನು ಹೊರಗಟ್ಟಲು ಅನ್ವರುದ್ದೀನ್ ಕಳುಹಿಸಿಕೊಟ್ಟ ಸೇನೆಯು ಸೋತಿತು. ಕೊನೆಗೆ ಲಾಬೋರ್ಡಿನನು ಡೂಪ್ಲೆಗೆ ತಿಳಿಸದೆ ಬ್ರಿಟಿಷರಿಂದ ಹಣಪಡೆದು ಮದ್ರಾಸನ್ನು ಬಿಟ್ಟುಕೊಟ್ಟು ಮಾರಿಷಸ್‌ಗೆ ಹೊರಟುಹೋದನು. ಇದರಿಂದ ಕೋಪಗೊಂಡ ಡೂಪ್ಲೆಯು ಮದ್ರಾಸನ್ನು ಮತ್ತೆ ಪಡೆಯುವ ವಿಫಲ ಪ್ರಯತ್ನ ನಡೆಸಿದನು. ಅಂತಿಮವಾಗಿ ಈ ಯುದ್ಧವು ಯುರೋಪಿನಲ್ಲಿ ಫ್ರಾನ್ಸ್ ಮತ್ತು ಇಂಗ್ಲೇಂಡಿನ ನಡುವೆ ಆದ 'ಏಕ್ಸ್–ಲಾ–ಚಾಪೆಲ್' ಒಪ್ಪಂದದೊಂದಿಗೆ ಮುಕ್ತಾಯವಾಯಿತು.

***ನಿಮಗಿದು ತಿಳಿದಿರಲಿ :*** *ಹೈದರಾಬಾದ್ ಸಂಸ್ಥಾನದ ನಿಜಾಮನಾದ ಅಸಫ್ ಜಾ 1748ರಲ್ಲಿ ಮರಣ ಹೊಂದಿದನು. ಸಿಂಹಾಸನಕ್ಕಾಗಿ ಅವನ ಮಗನಾದ ನಾಸೀರ್‌ಜಂಗ್ ಮತ್ತು ಅವನ ಮಗಳ ಮಗನಾದ ಮುಜಾಫರ್ ಜಂಗ್ ನಡುವೆ ಕಲಹ ಆರಂಭವಾಯಿತು. ಅತ್ತ ಕಾರ್ನಾಟಿಕದಲ್ಲಿ (ಮರಾಠರ ಸೆರೆಯಿಂದ ಬಿಡುಗಡೆಗೊಂಡ) ಚಂದಾಸಾಹೇಬ್ ಮತ್ತು ಅನ್ವರುದ್ದೀನನ ನಡುವೆ ಸಿಂಹಾಸನಕ್ಕಾಗಿ ಕಿತ್ತಾಟ ಆರಂಭವಾಯಿತು. ಆಗ ಫ್ರೆಂಚರು ಹೈದರಾಬಾದಿನಲ್ಲಿ ಮುಜಾಫರ್ ಜಂಗನಿಗೂ, ಕಾರ್ನಾಟಿಕ್‌ನಲ್ಲಿ ಚಂದಾಸಾಹೇಬನಿಗೂ ಬೆಂಬಲ ನೀಡಿದರು. ಇದಕ್ಕೆ ಪ್ರತಿಯಾಗಿ ಬ್ರಿಟಿಷರು ನಾಸಿರ್‌ಜಂಗ್ ಮತ್ತು ಅನ್ವರುದ್ದೀನನ ಬೆಂಬಲಕ್ಕೆ ನಿಂತರು.*

NOT TO BE REPUBLISHED ©KTBS

*1749ರಲ್ಲಿ ಚಂದಾಸಾಹೇಬ, ಮುಜಾಫರ್‌ಜಂಗ್ ಮತ್ತು ಫ್ರೆಂಚರ ಪಡೆಗಳು ಒಂದಾಗಿ ಅನ್ವರುದ್ದೀನನನ್ನು ಆಂಬೂರ್ ಕದನದಲ್ಲಿ ಕೊಂದರು. ಪರಿಣಾಮವಾಗಿ ಚಂದಾಸಾಹೇಬ ಕಾರ್ನಾಟಿಕ್‌ನ ನವಾಬನಾದನು. ಅನ್ವರುದ್ದೀನನ ಮಗನಾದ 'ಮಹಮದ್ ಅಲಿ'ಯು ಬ್ರಿಟಿಷರ ನೆರವಿನಿಂದ ತಿರುಚನಾಪಳ್ಳಿಯಲ್ಲಿ ನೆಲೆನಿಂತನು. ಅತ್ತ ಹೈದರಾಬಾದಿನಲ್ಲಿ ಮುಜಾಫರ್‌ಜಂಗನು ಚಂದಾಸಾಹೇಬ ಮತ್ತು ಫ್ರೆಂಚರ ಸಹಾಯದಿಂದ ನಾಸಿರ್‌ಜಂಗನನ್ನು ಕೊಂದು ನಿಜಾಮನಾದರೂ, ಸ್ವಲ್ಪದಿನಗಳಲ್ಲಿಯೇ ಹತ್ಯೆಗೀಡಾದನು. ಅವನ ಸ್ಥಾನಕ್ಕೆ ಫ್ರೆಂಚರು ಅಸಫ್‌ಜಾನ ಇನ್ನೊಬ್ಬ ಮಗನಾದ ಸಲಾಬತ್‌ಜಂಗನನ್ನು ನಿಜಾಮನಾಗಿ ಮಾಡಿದರು.*

**ಎರಡನೆಯ ಕಾರ್ನಾಟಿಕ್ ಯುದ್ಧ (1749–1754) :** ಬದಲಾದ ಸನ್ನಿವೇಶದಲ್ಲಿ ಫ್ರೆಂಚರು ಅಸಫ್‌ಜಾನ ಮತ್ತೊಬ್ಬ ಮಗನಾದ ಸಲಾಬತ್‌ಜಂಗನನ್ನು ಹೈದರಾಬಾದಿನ ನಿಜಾಮನಾಗಿ ಮಾಡಿದರು. ಅವನ ರಕ್ಷಣೆಗಾಗಿ ಆಸ್ಥಾನದಲ್ಲಿ ಫ್ರೆಂಚರು ತಮ್ಮ ಸೈನ್ಯ ಸಹಿತ 'ಬುಸ್ಸಿ' ಎಂಬ ಅಧಿಕಾರಿಯನ್ನು ನೇಮಿಸಿದ್ದರು. ಮತ್ತೊಂದು ಕಡೆ ಫ್ರೆಂಚರ ಬೆಂಬಲದಿಂದ ಚಂದಾಸಾಹೇಬನು ಕಾರ್ನಾಟಿಕ್‌ನ ನವಾಬನಾಗಿದ್ದನು. ಆದರೆ ಇಂಗ್ಲಿಷ್ ಈಸ್ಟ್ ಇಂಡಿಯಾ ಕಂಪನಿಯ ಅಧಿಕಾರಿ ರಾಬರ್ಟ್ ಕ್ಲೈವನು ಕಾರ್ನಾಟಿಕದ ರಾಜಧಾನಿ ಆರ್ಕಾಟಿನ ಮೇಲೆ ಆಕ್ರಮಣ ಮಾಡಿ ಫ್ರೆಂಚರು ಮತ್ತು ಚಂದಾಸಾಹೇಬನನ್ನು ಸೋಲಿಸಿದನು. ಅಂತಿಮವಾಗಿ ಈ ಯುದ್ಧದಲ್ಲಿ ಚಂದಾಸಾಹೇಬನನ್ನು ಬಂಧಿಸಿ ಹತ್ಯೆ ಮಾಡಲಾಯಿತು. ಅವನ ಸ್ಥಾನಕ್ಕೆ ಬ್ರಿಟಿಷರು ಅನ್ವರುದ್ದೀನನ ಮಗನಾದ ಮಹಮ್ಮದ್ ಅಲಿಯನ್ನು ನವಾಬನಾಗಿ ನೇಮಕ ಮಾಡಿದರು. ಕೊನೆಗೆ ಎರಡನೆಯ ಕಾರ್ನಾಟಿಕ್ ಯುದ್ಧವು 'ಪಾಂಡಿಚೇರಿ ಒಪ್ಪಂದ'ದೊಂದಿಗೆ ಮುಕ್ತಾಯವಾಯಿತು. ಫ್ರೆಂಚರು ಡೂಪ್ಲೆಯನ್ನು ಹಿಂದಕ್ಕೆ ಕರೆಸಿಕೊಂಡರು. ಈ ಯುದ್ಧವು ಫ್ರೆಂಚರಿಗೆ ರಾಜಕೀಯ ಹಿನ್ನಡೆಯನ್ನು, ಬ್ರಿಟಿಷರಿಗೆ ಪ್ರತಿಷ್ಠೆಯನ್ನು ತಂದುಕೊಟ್ಟಿತು.

**ಮೂರನೆಯ ಕಾರ್ನಾಟಿಕ್ ಯುದ್ಧ (1756–1763):** ಫ್ರೆಂಚರ 'ಕೌಂಟ್ ಡಿ ಲಾಲಿ'ಯು 1760ರಲ್ಲಿ ವಾಂಡಿವಾಷ್ ಕೋಟೆಗೆ ಮುತ್ತಿಗೆ ಹಾಕಲು ಪ್ರಯತ್ನಿಸಿದನು. ಈ ನಿರ್ಣಾಯಕ ವಾಂಡಿವಾಷ್ ಕದನದಲ್ಲಿ ಬ್ರಿಟಿಷ್ ಸೇನಾಧಿಕಾರಿ ಸರ್. ಐರ್‌ಕೂಟನು ಫ್ರೆಂಚರನ್ನು ಸೋಲಿಸಿದನಲ್ಲದೆ, ಬುಸ್ಸಿಯನ್ನು ಸೆರೆಹಿಡಿದನು. ಲಾಲಿಯು ತಪ್ಪಿಸಿಕೊಂಡು ಪಾಂಡಿಚೇರಿಯಲ್ಲಿ ತಲೆಮರೆಸಿಕೊಂಡನು. ಅಂತಿಮವಾಗಿ ಐರ್‌ಕೂಟನು ಪಾಂಡಿಚೇರಿಗೂ ಮುತ್ತಿಗೆ ಹಾಕಿದಾಗ ಲಾಲಿಯು 1761ರಲ್ಲಿ ಬೇಷರತ್ತಾಗಿ ಶರಣಾದನು.

ಕಾರ್ನಾಟಿಕ್ ಯುದ್ಧಗಳ ಪರಿಣಾಮವಾಗಿ ಫ್ರೆಂಚರು ಭಾರತದಲ್ಲಿ ತಮ್ಮ ಎಲ್ಲ ನೆಲೆಗಳನ್ನು ಕಳೆದುಕೊಂಡರು. ಆದಾಗ್ಯೂ 1763ರಲ್ಲಿ ನಡೆದ 'ಪ್ಯಾರಿಸ್ ಒಪ್ಪಂದ'ದ ಪ್ರಕಾರ ಫ್ರೆಂಚ–ರಿಗೆ ಪಾಂಡಿಚೇರಿಯನ್ನು ಹಿಂತಿರುಗಿಸಲಾಯಿತು. ಈ ಬೆಳವಣಿಗೆಗಳೊಂದಿಗೆ ದಕ್ಷಿಣ ಭಾರತದಲ್ಲಿ ಫ್ರೆಂಚರು ಮೂಲೆಗುಂಪಾದರು. ಹೀಗೆ ಬ್ರಿಟಿಷರು ತಮ್ಮ ಇತರ ಯುರೋಪಿಯನ್ ಪ್ರತಿಸ್ಪರ್ಧಿಗಳನ್ನು ದಮನಮಾಡಿ ದಕ್ಷಿಣ ಭಾರತವನ್ನು ಗೆಲ್ಲುವ ಕಾರ್ಯದಲ್ಲಿ ಮಗ್ನರಾದರು.

© KTBS NOT TO BE REPUBLISHED

**ನಿಮಗಿದು ತಿಳಿದಿರಲಿ :**

***ರಾಬರ್ಟ್‌ಕ್ಲೈವ್ :*** *ಭಾರತದಲ್ಲಿ ಬ್ರಿಟಿಷ್ ಅಧಿಕಾರವನ್ನು ಕಟ್ಟಿದ ಪ್ರಥಮ ಅಧಿಕಾರಿ ರಾಬರ್ಟ್‌ಕ್ಲೈವ್. ಈತನು ಈಸ್ಟ್ ಇಂಡಿಯಾ ಕಂಪನಿಯಲ್ಲಿ ಕಾರಕೂನನಾಗಿ ಸೇವೆಗೆ ಸೇರಿದ್ದನು. ಕಾರ್ನಾಟಿಕ್ ಯುದ್ಧದಲ್ಲಿ ಅದರಲ್ಲೂ ಆರ್ಕಾಟ್‌ನ ಮುತ್ತಿಗೆಯಲ್ಲಿ ಬಹುಮುಖ್ಯ ಪಾತ್ರವನ್ನು ನಿರ್ವಹಿಸಿ, ಬ್ರಿಟಿಷರ ವಿಜಯಕ್ಕೆ ಕಾರಣನಾದನು. ದಕ್ಷಿಣಭಾರತದಲ್ಲಿ ಬ್ರಿಟಿಷರ ಅಸ್ತಿತ್ವ ರೂಪಿಸುವಲ್ಲಿ ಸಫಲನಾದ ಈತ ಬಂಗಾಳದ ವಿಜಯಕ್ಕೂ ಕಾರಣನಾದನು. 1757ರ ಪ್ಲಾಸಿಕದನದ ವಿಜಯದಿಂದಾಗಿ ಬಂಗಾಳದ ನವಾಬನ ಮೇಲೆ ಹಿಡಿತವನ್ನು ಸಾಧಿಸಿದನು. ಇದರಿಂದ ಅಪಾರ ಸಂಪತ್ತನ್ನು ಕ್ಲೈವನು ಸಂಪಾದಿಸಿದ್ದಲ್ಲದೆ, ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಗೂ ಲಾಭವನ್ನು ತಂದುಕೊಟ್ಟನು. ಅಪಾರ ಸಂಪತ್ತಿನಿಂದ ಇಂಗ್ಲೆಂಡಿಗೆ ಹಿಂದಿರುಗಿದ ಕ್ಲೈವನು ಸಂಸತ್ತಿನ ಸದಸ್ಯನಾಗಿ ಸಹ ನೇಮಕಗೊಂಡನು. ರಾಬರ್ಟ್ ಕ್ಲೈವನು ಇಂಗ್ಲೆಂಡಿಗೆ ಹಿಂದಿರುಗಿದ ನಂತರ ಭಾರತದಲ್ಲಿ ಈಸ್ಟ್ ಇಂಡಿಯಾ ಕಂಪನಿಯು ವ್ಯಾಪಾರದಲ್ಲಿ ನಷ್ಟವನ್ನು ಅನುಭವಿಸತೊಡಗಿತು. ಅವನ ಮೇಲೆ ಆಪಾದನೆಗಳು ಇದ್ದಾಗ್ಯೂ ಸಹ ಅನಿವಾರ್ಯತೆಯಲ್ಲಿ ಸರ್ಕಾರವು ಮತ್ತೆ ಕ್ಲೈವ್‌ನನ್ನು ಬ್ರಿಟಿಷರ ಘನತೆ ಮತ್ತು ಹಿತಾಸಕ್ತಿಗಳನ್ನು ಕಾಪಾಡುವ ಸಲುವಾಗಿ ಭಾರತಕ್ಕೆ ಸೇನಾಪತಿಯಾಗಿ ಕಳುಹಿಸಿಕೊಟ್ಟಿತು. ಬಕ್ಸಾರ್ ಕದನದಲ್ಲಿ ಮತ್ತೆ ವಿಜಯಿಯಾಗಿ ಬ್ರಿಟಿಷರಿಗೆ ಘನತೆಯನ್ನು ತಂದುಕೊಟ್ಟ ಕ್ಲೈವನು ಬಂಗಾಳ, ಬಿಹಾರ, ಒರಿಸ್ಸಾ ಪ್ರಾಂತ್ಯಗಳ ಮೇಲೆ ದಿವಾನಿ ಹಕ್ಕನ್ನು ಕಂಪನಿಗೆ ತಂದುಕೊಟ್ಟನು. ಇದರಿಂದ ಮತ್ತೆ ಸಂಪತ್ತನ್ನು ತನಗೂ ಮತ್ತು ಈಸ್ಟ್ ಇಂಡಿಯಾ ಕಂಪನಿಗೆ ದೊರಕಿಸಿಕೊಂಡು 1767ರಲ್ಲಿ ಇಂಗ್ಲೆಂಡಿಗೆ ಹಿಂದಿರುಗಿದನು.*

***ಡೂಪ್ಲೆ :*** *ಡೂಪ್ಲೆ ಭಾರತದಲ್ಲಿನ ಫ್ರೆಂಚ್ ಅಧಿಪತ್ಯಗಳ ಮೇಲಿನ ಗೌರ್‍ನರ್ ಜನರಲ್ ಆಗಿ 1742ರಲ್ಲಿ ನೇಮಕಗೊಂಡನು. ಭಾರತದ ಮೇಲೆ ರಾಜಕೀಯ ಅಧಿಪತ್ಯ ಸ್ಥಾಪನೆಯ ಕನಸನ್ನು ಕಾಣುತ್ತಿದ್ದ ಡೂಪ್ಲೆ ಇಲ್ಲಿನ ದೇಶೀಯ ರಾಜರುಗಳ ಜೊತೆ ಒಪ್ಪಂದಗಳನ್ನು ಮಾಡಿಕೊಂಡಿದ್ದನು. ಡೂಪ್ಲೆ ಕಟ್ಟಿದ ದೇಶೀ ಸೇನೆಯಿಂದಲೇ ಹೈದರಾಲಿಯು ಸಹ ತರಬೇತಿ ಪಡೆದಿದ್ದನು. ಬ್ರಿಟಿಷರಿಗೆ ಡೂಪ್ಲೆಯು ತಮ್ಮ ಅಧಿಪತ್ಯ ಸ್ಥಾಪನೆಗೆ ಸವಾಲಾಗಿ ಕಂಡಿದ್ದನು. ಹೀಗೆ ಕಾರ್ನಾಟಿಕ್ ಮತ್ತು ದಖನ್ ಮೇಲಿನ ಅಧಿಪತ್ಯ ಸ್ಥಾಪನೆಗಾಗಿ ಬ್ರಿಟಿಷರು ಮತ್ತು ಫ್ರೆಂಚರ ನಡುವಿನ ಸಂಘರ್ಷವನ್ನು ಕಾಣುತ್ತೇವೆ. ಡೂಪ್ಲೆಯು 1746ರ ಮದ್ರಾಸ್ ಕದನದಲ್ಲಿ ಬಹುಮುಖ್ಯ ಪಾತ್ರವನ್ನು ವಹಿಸಿ ಯಶಸ್ವಿಯಾಗಿದ್ದನು. ಫ್ರೆಂಚರು ಮತ್ತು ಬ್ರಿಟಿಷರ ನಡುವಿನ ಸಂಘರ್ಷವು 1754ರವರೆಗೆ ನಡೆಯಿತು. ತದನಂತರದಲ್ಲಿ ಫ್ರಾನ್ಸಿನ ಸರ್ಕಾರವೇ ಶಾಂತಿಯನ್ನು ಬಯಸಿ ಡೂಪ್ಲೆಯನ್ನು ಹಿಂದಕ್ಕೆ ಕರೆಸಿಕೊಂಡಿತು.*

©KTBS NOT TO BE REPUBLISHED

## ಭಾರತದಲ್ಲಿ ಬ್ರಿಟಿಷ್ ಆಳ್ವಿಕೆ

ದಕ್ಷಿಣ ಭಾರತದಲ್ಲಿ ರಾಜಕೀಯ ನಿಯಂತ್ರಣ ಸಾಧಿಸಿದ ಬ್ರಿಟಿಷರು 18ನೆಯ ಶತಮಾನದ ದ್ವಿತೀಯಾರ್ಧದಲ್ಲಿ ಸಂಪದ್ಭರಿತ ಬಂಗಾಳ ಪ್ರಾಂತ್ಯದ ಮೇಲೆ ಪೂರ್ಣ ನಿಯಂತ್ರಣ ಸಾಧಿಸಲು ಮುಂದಾದರು. ಕೃಷಿ, ವಾಣಿಜ್ಯ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಬಂಗಾಳ ಪ್ರಾಂತ್ಯವು ಸಮೃದ್ಧ ಬೆಳವಣಿಗೆ ಹೊಂದಿತ್ತು. ಇಂಗ್ಲಿಷ್ ಈಸ್ಟ್ ಇಂಡಿಯಾ ಕಂಪನಿಯು ಈ ಪ್ರಾಂತ್ಯದಿಂದ ಅಪಾರ ಲಾಭವನ್ನೂ ಗಳಿಸುತ್ತಿತ್ತು. 1717ರಲ್ಲಿ ಮೊಘಲ್ ದೊರೆ ಫಾರೂಕ್ ಶಿಯಾರನು ಬಂಗಾಳದಲ್ಲಿ ಮುಕ್ತ ವ್ಯಾಪಾರ ನಡೆಸಲು ಕಂಪನಿಗೆ ನೀಡಿದ 'ದಸ್ತಕ್'ಗಳೇ (ಪರವಾನಿಗೆ) ಅವರ ಲಾಭಕ್ಕೆ ಕಾರಣವಾಗಿತ್ತು. ಆದರೆ ಕಂಪನಿಗೆ ಸೀಮಿತವಾಗಿದ್ದ ಈ ದಸ್ತಕ್‌ಗಳನ್ನು ಕಂಪನಿಯ ನೌಕರರು

ತಮ್ಮ ಖಾಸಗಿ ವ್ಯಾಪಾರ-ವ್ಯವಹಾರಕ್ಕಾಗಿ ದುರುಪಯೋಗ ಪಡಿಸಿಕೊಳ್ಳತೊಡಗಿದರು. ಇದರಿಂದ ಬಂಗಾಳ ಸರ್ಕಾರಕ್ಕೆ ಅಪಾರ ನಷ್ಟ ಉಂಟಾಗುತ್ತಿತ್ತು. ಆದ್ದರಿಂದ ಮುರ್ಷಿದ್ ಅಲಿ ಖಾನ್‌ನಿಂದ ಅಲಿವರ್ದಿಖಾನ್‌ವರೆಗಿನ ಎಲ್ಲ ನವಾಬರೂ ದಸ್ತಕ್‌ನ ದುರುಪಯೋಗವನ್ನು ವಿರೋಧಿಸುತ್ತಿದ್ದರು. ಮುಂದೆ ಇದೇ ವಿಚಾರವು ನವಾಬ ಮತ್ತು ಕಂಪನಿಯ ನಡುವೆ ಸಂಘರ್ಷಕ್ಕೆ ಎಡೆಮಾಡಿಕೊಟ್ಟಿತು. ಇದರ ಪರಿಣಾಮವಾಗಿಯೇ ಭಾರತದ ಇತಿಹಾಸಕ್ಕೆ ಹೊಸ ತಿರುವನ್ನು ಕೊಟ್ಟ ಅತ್ಯಂತ ಮಹತ್ವಪೂರ್ಣವಾದ ಎರಡು ಯುದ್ಧಗಳು ನಡೆದವು. ಅವುಗಳೇ ಪ್ಲಾಸಿ ಮತ್ತು ಬಕ್ಸಾರ್ ಕದನಗಳು.

***ನಿಮಗಿದು ತಿಳಿದಿರಲಿ : ದಸ್ತಕ್:*** *ಯಾವುದೇ ತೆರಿಗೆ ಇಲ್ಲದೆ, ಸರಕುಗಳ ಆಮದು ಮತ್ತು ರಫ್ತು ಮಾಡಲು ಹಾಗೂ ಸರಕುಗಳ ಸಾಗಾಣೆ ಮಾಡಲು ಬೇಕಾದ ಪರವಾನಿಗೆ ಪತ್ರ.*

**ಪ್ಲಾಸಿ ಕದನ (1757) :** ಬಂಗಾಳದ ನವಾಬನಾದ ಅಲಿವರ್ದಿ ಖಾನನು 1756ರಲ್ಲಿ ನಿಧನನಾದನು. ನಂತರ ಅವನ ಮೊಮ್ಮಗನಾದ ಸಿರಾಜ್-ಉದ್-ದೌಲನು ಅಧಿಕಾರಕ್ಕೆ ಬಂದನು. ಯುವ ನವಾಬನಾದ ಸಿರಾಜ್-ಉದ್-ದೌಲನಿಗೂ ಮತ್ತು ಬ್ರಿಟಿಷರಿಗೂ 1757ರಲ್ಲಿ ಇತಿಹಾಸ ಪ್ರಸಿದ್ಧ ಪ್ಲಾಸಿ ಕದನ ನಡೆಯಿತು.

**ಕಾರಣಗಳು :**

1. **ದಸ್ತಕ್‌ಗಳ ದುರುಪಯೋಗ :** ಕಂಪನಿಯ ವ್ಯಾಪಾರಕ್ಕಾಗಿ ನೀಡಿದ 'ದಸ್ತಕ್'ಗಳನ್ನು ಬ್ರಿಟಿಷ್ ನೌಕರರು ದುರುಪಯೋಗ ಪಡಿಸಿಕೊಳ್ಳುವ ಮೂಲಕ ರಾಜ್ಯದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡುತ್ತಿದ್ದದ್ದು ಸಿರಾಜನನ್ನು ಕೆರಳಿಸಿತು.
2. **ಅನುಮತಿ ಇಲ್ಲದೆ ಕೋಟೆಯ ದುರಸ್ಥಿ :** ಬ್ರಿಟಿಷರು ಫ್ರೆಂಚರ ಭಯದಿಂದ ಕಲ್ಕತ್ತಾದ ಕೋಟೆಯನ್ನು ಬಲಪಡಿಸಿ, ಫಿರಂಗಿಗಳನ್ನು ಇಟ್ಟರು. ಅನುಮತಿ ಪಡೆಯದೆ ಕೋಟೆಯನ್ನು ದುರಸ್ಥಿ ಮಾಡಿಸಿದ್ದರಿಂದ ಫಿರಂಗಿಗಳನ್ನು ತೆಗೆದು ಹಾಕಲು ಸಿರಾಜ್ ಸೂಚಿಸಿದನಾದರೂ ಅವರು ಪಾಲಿಸಲಿಲ್ಲ. ಇದರಿಂದ ಸಿರಾಜನು ಆಕ್ರೋಶಗೊಂಡನು.
3. **ಕಪ್ಪುಕೋಣೆ ದುರಂತ :** ಆಗ ಸಿರಾಜನು ಪೋರ್ಟ್ ವಿಲಿಯಂ ಕೋಟೆಯನ್ನು ಸುಲಭವಾಗಿ ಗೆದ್ದು ಕೆಲವರನ್ನು ಸೆರೆಹಿಡಿದನು. ಸಿರಾಜನು ಆಕ್ರಮಣದಲ್ಲಿ ಸೆರೆ ಸಿಕ್ಕಿದ 146 ಬ್ರಿಟಿಷರನ್ನು ಚಿಕ್ಕ ಕೊಠಡಿಯೊಂದರಲ್ಲಿ ಬಂಧಿಸಿಟ್ಟನು. ಅವರಲ್ಲಿ 123 ಮಂದಿ ಅಸುನೀಗಿದರು ಎಂಬುದಾಗಿತ್ತು. ಇದನ್ನು ಕಪ್ಪುಕೋಣೆಯ ದುರಂತ ಎಂದು ಕರೆಯಲಾಗಿದೆ. ಈ ಸುದ್ದಿ ಕೇಳಿ ರಾಬರ್ಟ್ ಕ್ಲೈವ್ ಉಗ್ರ ಕೋಪದಲ್ಲಿ ಬಲಿಷ್ಠ ಸೇನೆಯೊಂದಿಗೆ ಬಂಗಾಳಕ್ಕೆ ಬಂದನು.

ಮೊದಲು ನವಾಬನ ವಿರೋಧಿಗಳಾದ ಮಾಣಿಕ್‌ಚಂದ್, ನೇಮಿಚಂದ್, ಜಗತ್‌ಸೇಠ್ (ಬಂಗಾಳದ ಲೇವಾದೇವಿಗಾರ) ಮೊದಲಾದ ಶ್ರೀಮಂತರನ್ನು ತನ್ನತ್ತ ಸೆಳೆದುಕೊಂಡನು. ನಂತರ ಸಿರಾಜನ ಸೇನಾಪತಿಯಾದ ಮೀರ್ ಜಾಫರನಿಗೆ ನವಾಬನನ್ನಾಗಿ ಮಾಡುವ ಆಮಿಷವೊಡ್ಡಿ ಯುದ್ಧದಲ್ಲಿ ತಟಸ್ಥವಾಗಿರಲು ರಾಜ್ಯವನ್ನು ಒಪ್ಪಿಸಿದನು. ಇದರಿಂದ ಧೈರ್ಯಗೊಂಡ ರಾಬರ್ಟ್ ಕ್ಲೈವನು 1757 ಜೂನ್ 23 ರಂದು ಸಿರಾಜ್-ಉದ್-ದೌಲನ ಮೇಲೆ ಕದನ ಸಾರಿದನು. ಪ್ಲಾಸಿ ಎಂಬಲ್ಲಿ ನಡೆದ ಕದನದಲ್ಲಿ ಕ್ಲೈವನು ಯೋಜಿಸಿದಂತೆಯೇ ಎಲ್ಲವೂ ನಡೆಯಿತು. ಯುದ್ಧ ಭೂಮಿಯಿಂದ ತಪ್ಪಿಸಿಕೊಂಡ ಸಿರಾಜ್-ಉದ್-ದೌಲನನ್ನು ಸೆರೆಹಿಡಿದು ಕೊಲ್ಲಲಾಯಿತು.

©KTBS NOT TO BE REPUBLISHED

**ಪರಿಣಾಮಗಳು :**

1. ಈ ಯುದ್ಧವು ಭಾರತೀಯರಲ್ಲಿದ್ದ ಅನೈಕ್ಯತೆ, ಅಸಂಘಟನೆ ಮತ್ತು ಈ ಕಾಲದ ವ್ಯಾಪಾರಿ ವರ್ಗದಲ್ಲಿದ್ದ ಲೋಭಿತನವನ್ನು ಪ್ರದರ್ಶಿಸಿತು.
2. ಮೀರ್ ಜಾಫರ್ ಬಂಗಾಳದ ನವಾಬನಾದನು.
3. ಕಂಪನಿಯು ಬಂಗಾಳ ಪ್ರಾಂತ್ಯದಲ್ಲಿ ವ್ಯಾಪಾರ ನಡೆಸಲು ಅನಿರ್ಬಂಧಿತ ಹಕ್ಕನ್ನು ಪಡೆಯಿತು.
4. ಸಿರಾಜನು ಕಲ್ಕತ್ತಾದ ಮೇಲೆ ನಡೆಸಿದ ಆಕ್ರಮಣಕ್ಕೆ ಯುದ್ಧ ಪರಿಹಾರವಾಗಿ ಮೀರ್ ಜಾಫರನು ಕಂಪನಿಗೆ ಹದಿನೇಳು ಕೋಟಿ ಎಪ್ಪತ್ತು ಲಕ್ಷ ರೂಪಾಯಿಗಳನ್ನು ನೀಡಿದನು.

ಒಟ್ಟಾರೆ, ಮೀರ್ ಜಾಫರನು ಕಂಪನಿ ಮತ್ತು ನೌಕರರ ಕೈಗೊಂಬೆಯಾಗುವ ಮೂಲಕ ನಿರಂತರ ಶೋಷಣೆಗೆ ಒಳಗಾದನು. ಇದರಿಂದ ನವಾಬನ ಬೊಕ್ಕಸ ಬರಿದಾಯಿತೇ ವಿನಃ ಧನ ಪಿಶಾಚಿಗಳಾದ ಕಂಪನಿಯ ಅಧಿಕಾರಿಗಳ ತೃಷೆ ಮಾತ್ರ ತೀರಲಿಲ್ಲ. ಪರಿಣಾಮವಾಗಿ ಬ್ರಿಟಿಷರು ಮೀರ್ ಜಾಫರ್ ಅಸಮರ್ಥನೆಂದು ಬಿಂಬಿಸಿ ಅವನನ್ನು ನವಾಬ ಸ್ಥಾನದಿಂದ ಪದಚ್ಯುತಗೊಳಿಸಿ ಅವನ ಅಳಿಯನಾದ ಮೀರ್ ಖಾಸಿಂನನ್ನು ಬಂಗಾಳದ ನವಾಬನೆಂದು ನೇಮಿಸಿದರು.

**ಬಕ್ಸಾರ್ ಕದನ (1764) :** ಮೀರ್ ಖಾಸಿಂ ಒಬ್ಬ ಸಮರ್ಥ ಆಡಳಿತಗಾರ. ಈತನು ಸಹ ಆರಂಭದಲ್ಲಿ ಕಂಪನಿಗೆ ನಿಷ್ಠೆಯಿಂದಿದ್ದನು. ಎರಡು ಲಕ್ಷ ಪೌಂಡ್ ಹಣದ ಜೊತೆಗೆ ಕೆಲವು ಪ್ರದೇಶಗಳನ್ನು ಕಂಪನಿಗೆ ಬಿಟ್ಟುಕೊಟ್ಟನು. ಆದರೆ, ಶೀಘ್ರವೇ ಮೀರ್ ಖಾಸಿಂ ತನ್ನನ್ನು ಸ್ವತಂತ್ರ ರಾಜನೆಂದು ಭಾವಿಸಿದನು. ದಸ್ತಕ್‌ನ ದುರ್ಬಳಕೆಯನ್ನು ಪರಿಶೀಲಿಸಿ ಬಂಗಾಳದ ಎಲ್ಲಾ ವ್ಯಾಪಾರವನ್ನು ಸುಂಕಮುಕ್ತ ಎಂದು ಘೋಷಿಸಿದನು. ಇದರಿಂದಾಗಿ ಭಾರತೀಯರು ಸುಂಕವಿಲ್ಲದೆ ವ್ಯಾಪಾರ ನಡೆಸುವ ಮೂಲಕ ಬ್ರಿಟಿಷರೊಡನೆ ನೇರ ಸ್ಪರ್ಧೆಗಿಳಿದರು. ಪರಿಣಾಮ, ಬ್ರಿಟಿಷರ ವ್ಯಾಪಾರಕ್ಕೆ ಭಾರಿ ಹೊಡೆತ ಬಿದ್ದಿತು. ಬ್ರಿಟಿಷರಿಗೆ ನವಾಬನನ್ನು ವಿರೋಧಿಸಲು ಇದಿಷ್ಟೇ ಸಾಕಿತ್ತು. ಅವರು ಮೀರ್ ಖಾಸಿಂನನ್ನು ಇಳಿಸಿ ಮತ್ತೆ ಮೀರ್ ಜಾಫರ್‌ನನ್ನು ನವಾಬನಾಗಿ ಮಾಡಿದರು. ಬ್ರಿಟಿಷರ ಕುಟಿಲತೆಯನ್ನೆಲ್ಲ ಅರಿತಿದ್ದ ಮೀರ್ ಖಾಸಿಮನು ಬ್ರಿಟಿಷರ ವಿರುದ್ಧ ಸಂಘಟನಾತ್ಮಕ ಹೋರಾಟಕ್ಕೆ ಮುಂದಾದನು. ಭಾರತೀಯ ವ್ಯಾಪಾರಿಗಳು ಮತ್ತು ವಿವಿಧ ಕಸುಬುದಾರರು ಅವನ ಬೆಂಬಲಕ್ಕೆ ನಿಂತರು. ಈ ನಿಟ್ಟಿನಲ್ಲಿ ಮುಂದುವರೆದ ಮೀರ್ ಖಾಸಿಮನು ಮೊಘಲ್ ದೊರೆ ಎರಡನೇ ಷಾ ಆಲಂ ಮತ್ತು ಔದ್‌ನ ನವಾಬ ಷುಜ್-ಉದ್-ದೌಲರೊಂದಿಗೆ ಒಪ್ಪಂದ ಮಾಡಿಕೊಂಡನು. ಪರಿಣಾಮವಾಗಿ, ಮೀರ್ ಖಾಸಿಂ ನೇತೃತ್ವದ ಮೂರೂ ಸಂಯುಕ್ತ ಸೇನೆಗಳು ಹೆಕ್ಟರ್ ಮನ್ರೋ ನೇತೃತ್ವದ ಬ್ರಿಟಿಷ್ ಸೇನೆಯನ್ನು 1764ರಲ್ಲಿ ಬಕ್ಸರ್ ಎಂಬಲ್ಲಿ ಮುಖಾಮುಖಿಯಾದವು. ಅಂತಿಮವಾಗಿ ಯುದ್ಧದಲ್ಲಿ ಮೀರ್ ಖಾಸಿಂ ಸೋತು ಪಲಾಯನ ಮಾಡಿದರೆ, ಷಾ ಆಲಂ ಶರಣಾಗತನಾದನು. ಬ್ರಿಟಿಷ್ ಶಕ್ತಿಗೆ ತಡೆಯೊಡ್ಡುವ ಈ ಒಕ್ಕೂಟದ ಪ್ರಯತ್ನ ಸಂಪೂರ್ಣ ವಿಫಲವಾಯಿತು.

**ಪರಿಣಾಮಗಳು :**

1. ಈಸ್ಟ್ ಇಂಡಿಯಾ ಕಂಪನಿಗೆ ಬಂಗಾಳದ ಮೇಲಿನ 'ದಿವಾನಿ' ಹಕ್ಕನ್ನು ಎರಡನೇ ಷಾ ಆಲಂ ನೀಡಿದನು.
2. ಷಾ ಆಲಂ ವಾರ್ಷಿಕ 26 ಲಕ್ಷ ರೂಪಾಯಿಗಳನ್ನು ಪಡೆದು ಬಂಗಾಳದ ಮೇಲಿನ ತನ್ನ ಹಕ್ಕನ್ನೆಲ್ಲ ಬಿಟ್ಟುಕೊಡಬೇಕಾಯಿತು.

© KTBS NOT TO BE REPUBLISHED

3. ಔದ್‌ನ ನವಾಬನಾದ ಷುಜ್–ಉದ್–ದೌಲನು ಕಂಪನಿಗೆ ಯುದ್ಧನಷ್ಟ ಪರಿಹಾರವಾಗಿ 50 ಲಕ್ಷ ರೂಪಾಯಿಗಳನ್ನು ಕೊಡಬೇಕಾಯಿತು.

4. ಮೀರ್‌ಜಾಫರ್ ಮರಣ ಹೊಂದಿದ್ದರಿಂದ ಅವನ ಮಗನಿಗೆ ವಿಶ್ರಾಂತಿ ವೇತನ ನೀಡಿ ಬಂಗಾಳದ ಪೂರ್ಣ ಆಡಳಿತವನ್ನು ಕಂಪನಿಯು ನಿರ್ವಹಿಸತೊಡಗಿತು.

> **ನಿಮಗಿದು ತಿಳಿದಿರಲಿ :**
> **ದಿವಾನಿ ಹಕ್ಕು:** ಭೂಕಂದಾಯ ವಸೂಲಿ ಮಾಡುವ ಹಕ್ಕು.

ಅಂತಿಮವಾಗಿ ಬಕ್ಸರ್ ಕದನವು ಬ್ರಿಟಿಷರು ಬಂಗಾಳ, ಬಿಹಾರ ಮತ್ತು ಒಡಿಸ್ಸಾದ ನಿಜವಾದ ಒಡೆಯರೆಂದು ದೃಢೀಕರಿಸಿತು ಹಾಗೂ ಔದ್ ಕೂಡ ಅವರ ಅಧೀನದಲ್ಲಿ ಉಳಿಯುವಂತಾಯಿತು. 1765ರಲ್ಲಿ ರಾಬರ್ಟ್ ಕ್ಲೈವನು ಬಂಗಾಳದಲ್ಲಿ 'ದ್ವಿ ಪ್ರಭುತ್ವ' ಪದ್ಧತಿಯನ್ನು ಜಾರಿಗೆ ತಂದನು. ಈ ಪದ್ಧತಿಯಂತೆ ಬ್ರಿಟಿಷರು ಭೂ ಕಂದಾಯ ವಸೂಲಿ ಮಾಡುವ ಹಕ್ಕನ್ನು ಹೊಂದಿದರು. ಆದರೆ ನವಾಬನು ಆಡಳಿತ, ನ್ಯಾಯ ಮೊದಲಾದ ಆಡಳಿತಾತ್ಮಕ ಕಾರ್ಯಗಳನ್ನು ನಿರ್ವಹಿಸುತ್ತಿದ್ದನು. ಹೀಗೆ ಬ್ರಿಟಿಷರು ತಮ್ಮ ವಾಣಿಜ್ಯ ಹಿತಾಸಕ್ತಿಯನ್ನು ಕಾಪಾಡಿಕೊಳ್ಳುವ ಸಲುವಾಗಿ ಭಾರತದಲ್ಲಿ ರಾಜಕೀಯ ಪರಮಾಧಿಕಾರವನ್ನು ಸ್ಥಾಪಿಸಿದರು.

> **ನಿಮಗಿದು ತಿಳಿದಿರಲಿ :**
>
> *1600ರಲ್ಲಿ ಈಸ್ಟ್ ಇಂಡಿಯಾ ಕಂಪನಿಯನ್ನು ಇಂಗ್ಲೆಂಡಿನಲ್ಲಿ ಸ್ಥಾಪಿಸಲಾಯಿತು.*
>
> *1602ರಲ್ಲಿ ಡಚ್ ಈಸ್ಟ್ ಇಂಡಿಯಾ ಕಂಪನಿಯನ್ನು ಸ್ಥಾಪಿಸಲಾಯಿತು.*
>
> *1617ರಲ್ಲಿ ಮೊಘಲ್ ಚಕ್ರವರ್ತಿ ಜಹಂಗೀರನು ಈಸ್ಟ್ ಇಂಡಿಯಾ ಕಂಪನಿಗೆ ಪಶ್ಚಿಮ ಕರಾವಳಿಯ ಸೂರತ್ತಿನಲ್ಲಿ ಹಾಗೂ ಪೂರ್ವ ಕರಾವಳಿಯ ಹೂಗ್ಲಿಯಲ್ಲಿ ವ್ಯಾಪಾರ ಮಾಡಲು ಅನುಮತಿಯನ್ನು ನೀಡಿದನು.*
>
> *1639ರಲ್ಲಿ ಇಂಗ್ಲಿಷರು ತಮ್ಮ ಮೊದಲ ದಾಸ್ತಾನು ಕೋಠಿಯನ್ನು ಮದ್ರಾಸಿನಲ್ಲಿ ಸ್ಥಾಪಿಸಿದರು.*
>
> *1664ರಲ್ಲಿ ಫ್ರೆಂಚ್ ಈಸ್ಟ್ ಇಂಡಿಯಾ ಕಂಪನಿಯು ಸ್ಥಾಪನೆಗೊಂಡಿತು.*

© KTBS NOT TO BE REPUBLISHED

## ಅಭ್ಯಾಸಗಳು

**I. ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಉತ್ತರಗಳಿಂದ ಭರ್ತಿಮಾಡಿ.**

1. 1453ರಲ್ಲಿ ಆಟೋಮಾನ್ ಟರ್ಕರು __________ ನಗರವನ್ನು ವಶಪಡಿಸಿಕೊಂಡರು.
2. ಭಾರತ ಹಾಗೂ ಯುರೋಪ್ ನಡುವೆ ಹೊಸ ಜಲಮಾರ್ಗವನ್ನು __________ ಕಂಡುಹಿಡಿದನು.
3. 1741ರಲ್ಲಿ ಡಚ್ಚರು __________ ಮೇಲೆ ಯುದ್ಧ ಸಾರಿದರು.
4. ಭಾರತದಲ್ಲಿದ್ದ ಫ್ರೆಂಚರ ರಾಜಧಾನಿ________ .

5. ರಾಬರ್ಟ್ ಕ್ಲೈವನು 1757ರಲ್ಲಿ ಸಿರಾಜ್–ಉದ್–ದೌಲನ ಮೇಲೆ __________ ಕದನ ಸಾರಿದನು.

6. ಈಸ್ಟ್ ಇಂಡಿಯಾ ಕಂಪನಿಗೆ ಬಂಗಾಳದ 'ದಿವಾನಿ' ಹಕ್ಕನ್ನು __________ ನೀಡಿದನು.

7. ಬಂಗಾಳದಲ್ಲಿ 'ದ್ವಿ ಪ್ರಭುತ್ವ'ವನ್ನು ಜಾರಿಗೆ ತಂದವನು__________ .

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿ.**

1. ಮಧ್ಯಕಾಲದಲ್ಲಿ ಭಾರತ ಮತ್ತು ಯುರೋಪ್ ನಡುವೆ ವ್ಯಾಪಾರ ಹೇಗೆ ನಡೆಯುತ್ತಿತ್ತು?
2. ಭಾರತಕ್ಕೆ ಹೊಸ ಜಲಮಾರ್ಗ ಕಂಡು ಹಿಡಿಯಲು ಕಾರಣವಾದ ಅಂಶಗಳನ್ನು ಚರ್ಚಿಸಿರಿ.
3. ಭಾರತಕ್ಕೆ ವ್ಯಾಪಾರಕ್ಕಾಗಿ ಬಂದ ಯುರೋಪಿಯನ್ನರುಗಳನ್ನು ಪಟ್ಟಿ ಮಾಡಿ.
4. ಮಾರ್ತಾಂಡ ವರ್ಮನು ಡಚ್ಚರನ್ನು ಹೇಗೆ ನಿಯಂತ್ರಿಸಿದನು?
5. ಎರಡನೇ ಕಾರ್ನಾಟಿಕ್ ಯುದ್ಧವನ್ನು ವಿವರಿಸಿ.
6. ಪ್ಲಾಸಿ ಕದನಕ್ಕೆ ಕಾರಣ ಮತ್ತು ಪರಿಣಾಮಗಳನ್ನು ತಿಳಿಸಿ.
7. ಬಕ್ಸಾರ್ ಕದನದ ಪರಿಣಾಮಗಳಾವುವು?

**III. ಚಟುವಟಿಕೆ :**

ಬ್ರಿಟಿಷರು ಕಟ್ಟಿದ ಪ್ರೆಸಿಡೆನ್ಸಿ ನಗರಗಳನ್ನು ಕುರಿತು ಮಾಹಿತಿ ಸಂಗ್ರಹಿಸಿ.

* * * *

@KTBS NOT TO BE REPUBLISHED

Z5V9K5

## ಅಧ್ಯಾಯ–2

# ಬ್ರಿಟಿಷ್ ಆಳ್ವಿಕೆಯ ವಿಸ್ತರಣೆ

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- *ಆಂಗ್ಲೋ–ಮರಾಠ ಯುದ್ಧಗಳು*
- *ಸಹಾಯಕ ಸೈನ್ಯ ಪದ್ಧತಿ*
- *ಬ್ರಿಟಿಷ್ ಅಧಿಕಾರದ ಕ್ರೋಢೀಕರಣ*
- *ಆಂಗ್ಲೋ ಸಿಖ್ ಯುದ್ಧಗಳು*
- *ದತ್ತು ಮಕ್ಕಳಿಗೆ ಹಕ್ಕಿಲ್ಲ ನೀತಿ*

ಬ್ರಿಟಿಷರು ಕಾರ್ನಾಟಿಕ್ ಯುದ್ಧಗಳ ಮೂಲಕ ಭಾರತದಲ್ಲಿ ಯಾವುದೇ ಯುರೋಪ್ ದೇಶಗಳು ತಮ್ಮ ಎದುರಾಳಿಗಳಾಗಿ ನಿಲ್ಲದಂತೆ ಮಾಡಿದರು. ಪ್ಲಾಸಿ ಮತ್ತು ಬಕ್ಸಾರ್ ಕದನಗಳ ಮೂಲಕ ಬಂಗಾಳ ಪ್ರಾಂತ್ಯದ ಮೇಲೆ ಸಂಪೂರ್ಣ ರಾಜಕೀಯ ನಿಯಂತ್ರಣ ಸಾಧಿಸಿದರು. 1765ರ ಹೊತ್ತಿಗೆ ಬಹುತೇಕ ಪೂರ್ವಭಾಗದ ಭಾರತದ ಮೇಲೆ ಪ್ರಭುತ್ವ ಸ್ಥಾಪಿಸಿದರು. ಆದರೆ ಭಾರತದ ಪಶ್ಚಿಮ ಮತ್ತು ದಕ್ಷಿಣ ಭಾಗಗಳಲ್ಲಿ ಮೈಸೂರು ಮತ್ತು ಮರಾಠ ರಾಜ್ಯಗಳು ಪ್ರಬಲರಾಗಿದ್ದ ಕಾರಣ ಅವರ ಆಟಾಟೋಪ ಬಂಗಾಳ ಮತ್ತು ಬೊಂಬಾಯಿಗೆ ಸೀಮಿತಗೊಂಡಿತ್ತು.

ಬ್ರಿಟಿಷರ ಮುಂದಿನ ವಿಸ್ತರಣಾ ನೀತಿಗೆ ಅಡ್ಡಿಯಾಗಿದ್ದವರು ಮರಾಠ ಪೇಶ್ವೆಗಳು ಮತ್ತು ಮೈಸೂರು ಸಂಸ್ಥಾನದಲ್ಲಿ ಅಧಿಕಾರಕ್ಕೆ ಬಂದ ಹೈದರಾಲಿ ಮತ್ತು ಅವನ ಮಗ ಟಿಪ್ಪುಸುಲ್ತಾನ್. ಇವರ ನಂತರ ವಾಯುವ್ಯ ಭಾರತದಲ್ಲಿ ಸಿಖ್ಖರು ಪ್ರಬಲ ವಿರೋಧಿಗಳಾದರು. ಹತ್ತೊಂಬತ್ತನೇ ಶತಮಾನದ ಆರಂಭದ ದಶಕಗಳಲ್ಲಿ ಪ್ರವರ್ಧಮಾನಕ್ಕೆ ಬಂದ ರಣಜಿತ್ ಸಿಂಗನು ಸಿಖ್ಖರನ್ನು ಸಂಘಟಿಸುವಲ್ಲಿ ಯಶಸ್ವಿಯಾದನು.

ಬ್ರಿಟಿಷರು ಭಾರತದಲ್ಲಿ ತಮ್ಮ ಸಾಮ್ರಾಜ್ಯ ವಿಸ್ತರಣೆಗಾಗಿ ಹದಿನೆಂಟನೇ ಶತಮಾನದ ಮಧ್ಯಭಾಗದಿಂದ ಹತ್ತೊಂಬತ್ತನೇ ಶತಮಾನದ ಮಧ್ಯಂತರದವರೆಗೂ ಮೇಲಿಂದ ಮೇಲೆ ಅನೇಕ ಯುದ್ಧಗಳನ್ನು ಕೈಗೊಂಡರು. ಅಂತೆಯೇ 'ಸಹಾಯಕ ಸೈನ್ಯ ಪದ್ಧತಿ' ಮತ್ತು 'ದತ್ತು ಮಕ್ಕಳಿಗೆ ಹಕ್ಕಿಲ್ಲ'ದಂತಹ ನೀತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಉಪಾಯವಾಗಿಯೂ ಭಾರತೀಯ ರಾಜ್ಯಗಳನ್ನು ಕಬಳಿಸಿದರು. ಈ ಅವಧಿಯಲ್ಲಿ ಬ್ರಿಟಿಷರು ಭಾರತದ ದಕ್ಷಿಣ, ಪಶ್ಚಿಮ ಮತ್ತು ವಾಯುವ್ಯ ಭಾಗಗಳಲ್ಲಿ ನಡೆಸಿದ ಯುದ್ಧಗಳಲ್ಲಿ ಮೂರು ಆಂಗ್ಲೋ–ಮರಾಠ ಯುದ್ಧಗಳು, ನಾಲ್ಕು ಆಂಗ್ಲೋ–ಮೈಸೂರು ಯುದ್ಧಗಳು ಮತ್ತು ಎರಡು ಆಂಗ್ಲೋ–ಸಿಖ್‌ಯುದ್ಧಗಳೂ ಸೇರಿವೆ. ಮೈಸೂರು ಯುದ್ಧಗಳನ್ನು ನಾಲ್ಕನೇ ಪಾಠದಲ್ಲಿ ಚರ್ಚಿಸಲಾಗುವುದರಿಂದ ಇಲ್ಲಿ ಬ್ರಿಟಿಷರು ನಡೆಸಿದ ಮರಾಠ ಮತ್ತು ಸಿಖ್ ಯುದ್ಧಗಳನ್ನು ಕುರಿತು ತಿಳಿಯೋಣ.

### ಆಂಗ್ಲೋ–ಮರಾಠ ಯುದ್ಧಗಳು

**ಮೊದಲ ಆಂಗ್ಲೋ–ಮರಾಠ ಯುದ್ಧ (1775–1782):** ಬಕ್ಸಾರ್ ಕದನದಲ್ಲಿ ಸೋತು ಬ್ರಿಟಿಷರ ಆಶ್ರಯದಲ್ಲಿದ್ದ ಮೊಘಲ್ ಚಕ್ರವರ್ತಿ ಎರಡನೇ ಷಾ ಆಲಂನನ್ನು ಮರಾಠರು ಕರೆತಂದು ಮತ್ತೆ ದೆಹಲಿಯ ಸಿಂಹಾಸನದಲ್ಲಿ ಕುಳ್ಳಿರಿಸಿದರು. ಚಕ್ರವರ್ತಿಯು ಮೊದಲು ಬ್ರಿಟಿಷರಿಗೆ ನೀಡಿದ್ದ ಕೋರ

© KTBS NOT TO BE REPUBLISHED

ಮತ್ತು ಅಲಹಾಬಾದ್‌ಗಳನ್ನು ಮರಾಠರಿಗೆ ಕೊಟ್ಟನು. ಇದರಿಂದ ಮರಾಠರು ಮತ್ತು ಬ್ರಿಟಿಷರ ನಡುವೆ ವೈರತ್ವವು ಮನೆಮಾಡಿತು. ಮರಾಠರ ಬಲಿಷ್ಠ ಪೇಶ್ವೆ ಮಾಧವರಾವ್ ಇದೇ ಸಮಯದಲ್ಲಿ ತೀರಿಕೊಂಡದ್ದು ಮರಾಠರಿಗೆ ತುಂಬಲಾರದ ನಷ್ಟವಾಯಿತು. ಪೇಶ್ವೆಯ ಸ್ಥಾನಕ್ಕೆ ಅವನ ತಮ್ಮ ನಾರಾಯಣರಾಯನು ಬಂದನಾದರೂ ಅವನನ್ನು ಅವನ ಚಿಕ್ಕಪ್ಪ ರಘೋಬ(ರಘುನಾಥರಾವ್)ನು ಕೊಲೆ ಮಾಡಿದನು. ಇದರಿಂದ ಪೇಶ್ವೆಯ ಸ್ಥಾನಕ್ಕೆ ಕಲಹ ಏರ್ಪಟ್ಟಿತು. ನಾನಾ ಫಡ್ನವೀಸ್ ನೇತೃತ್ವದಲ್ಲಿ ಪೇಶ್ವೆ ಸ್ಥಾನಾಕಾಂಕ್ಷಿಯಾದ ರಘೋಬನ ಬದಲು ನಾರಾಯಣರಾಯನ ಮಗ ಎರಡನೇ ಮಾಧವರಾವ್‌ಗೆ  ಮರಾಠ ಒಕ್ಕೂಟವು ಪಟ್ಟಕಟ್ಟಿತು. ಮರಾಠ ಮನೆತನಗಳಿಂದ ನಿರೀಕ್ಷಿತ ಬೆಂಬಲ ಸಿಗದ ರಘೋಬನು ಬ್ರಿಟಿಷರ ಬೆಂಬಲ ಕೋರಿದನು. ಬ್ರಿಟಿಷರು ಈ ಸಂದರ್ಭವನ್ನು ತಮ್ಮ ಲಾಭಕ್ಕೆ ಬಳಸಿಕೊಳ್ಳಲು ಯೋಚಿಸಿದರು. ಬ್ರಿಟಿಷರು ಮತ್ತು ಮರಾಠ ಒಕ್ಕೂಟಗಳ ನಡುವೆ 1775–1782ರವರೆಗೆ ನಡೆದ ದೀರ್ಘ ಯುದ್ಧದಲ್ಲಿ ಮರಾಠರು ಪ್ರಾರಂಭಿಕ ಯಶಸ್ಸನ್ನು ಸಾಧಿಸಿದರೂ, ಅಂತಿಮವಾಗಿ ಅಹಮದಾಬಾದ್‌ಅನ್ನು ಕಳೆದುಕೊಂಡರು. ಮರಾಠ ಒಕ್ಕೂಟವು ಯುದ್ಧ ಮುಂದುವರೆಸಲಾಗದೆ ಬ್ರಿಟಿಷರೊಂದಿಗೆ ಸಾಲ್‌ಬಾಯ್ ಒಪ್ಪಂದವನ್ನು ಮಾಡಿಕೊಂಡಿತು. ಎರಡನೇ ಮಾಧವರಾವನನ್ನು ಪೇಶ್ವೆಯಾಗಿ ನೇಮಿಸಲಾಯಿತು.

**ಲಾರ್ಡ್ ವೆಲ್ಲೆಸ್ಲಿ (1798–1805) ಮತ್ತು ಸಹಾಯಕ ಸೈನ್ಯ ಪದ್ಧತಿ:** ಲಾರ್ಡ್ ವೆಲ್ಲೆಸ್ಲಿಯು ಗವರ್ನರ್ ಜನರಲ್ ಆಗಿ ಬಂದ ನಂತರ ಭಾರತದಲ್ಲಿ ಬ್ರಿಟಿಷರ ಸಾಮ್ರಾಜ್ಯ ವಿಸ್ತರಣೆಯು ದೊಡ್ಡ ಪ್ರಮಾಣದಲ್ಲಾಯಿತು. ಇವನ ಆಗಮನದ ಹೊತ್ತಿಗೆ ಬಲಿಷ್ಠ ಮರಾಠ ಮತ್ತು ಮೈಸೂರು ರಾಜ್ಯಗಳು ದುರ್ಬಲಗೊಂಡಿದ್ದು ವಿಸ್ತರಣಾ ನೀತಿಗೆ ಅನುಕೂಲಕರವಾಗಿತ್ತು. ಈ ಗುರಿಯನ್ನು ಸಾಧಿಸಲು ಅವನು ಮೂರು ವಿಧಾನಗಳನ್ನು ಅನುಸರಿಸಿದನು. ಅವುಗಳೆಂದರೆ: ಸಹಾಯಕ ಸೈನ್ಯ ಪದ್ಧತಿ, ಹೊಸ ರಾಜ್ಯಗಳ ಮೇಲೆ ಯುದ್ಧಗಳು ಮತ್ತು ಈಗಾಗಲೇ ಕಂಪನಿಯ ಅಧೀನಕ್ಕೆ ಒಳಪಟ್ಟಿರುವ ರಾಜ್ಯಗಳನ್ನು ನೇರ ನಿಯಂತ್ರಣಕ್ಕೆ ಒಳಪಡಿಸಿಕೊಳ್ಳುವುದು.

**ಸಹಾಯಕ ಸೈನ್ಯ ಪದ್ಧತಿ:** ಭಾರತೀಯ ರಾಜ್ಯಗಳನ್ನು ನಿಯಂತ್ರಣಕ್ಕೆ ಒಳಪಡಿಸಿಕೊಳ್ಳುವ ಸಲುವಾಗಿ ಸಹಾಯಕ ಸೈನ್ಯ ಪದ್ಧತಿ ಎಂಬ ನೀತಿಯನ್ನು ವೆಲ್ಲೆಸ್ಲಿಯು 1798ರಲ್ಲಿ ಜಾರಿಗೆ ತಂದನು. ಸಹಾಯಕ ಸೈನ್ಯ ಪದ್ಧತಿಯು ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿ ಮತ್ತು ಭಾರತೀಯ ರಾಜ್ಯಗಳ ನಡುವಿನ ಒಂದು ಸೈನಿಕ ಒಪ್ಪಂದವಾಗಿದೆ.

**ಸಹಾಯಕ ಸೈನ್ಯ ಪದ್ಧತಿಯ ನಿಬಂಧನೆಗಳು:**

1. ಭಾರತೀಯ ರಾಜನು ಬ್ರಿಟಿಷ್ ಸೈನಿಕ ತುಕಡಿಯನ್ನು ತನ್ನ ರಾಜ್ಯದಲ್ಲಿ ಇರಿಸಿಕೊಳ್ಳಬೇಕು.
2. ಸೇನೆಯ ವೇತನ ಮತ್ತು ನಿರ್ವಹಣೆಯ ವೆಚ್ಚವನ್ನು ಸಂಬಂಧಪಟ್ಟ ರಾಜ್ಯವೇ ಭರಿಸಬೇಕು. ಇಲ್ಲವೆ ನಿರ್ದಿಷ್ಟ ಕಂದಾಯ ಪ್ರದೇಶವನ್ನು ಬಿಟ್ಟುಕೊಡಬೇಕು.
3. ರಾಜನ ಆಸ್ಥಾನದಲ್ಲಿ ಬ್ರಿಟಿಷ್ ರೆಸಿಡೆಂಟನನ್ನು ನೇಮಿಸಿಕೊಳ್ಳಬೇಕು.
4. ಬ್ರಿಟಿಷರ ಅನುಮತಿ ಇಲ್ಲದೆ ಆಸ್ಥಾನದಲ್ಲಿ ಯಾವುದೇ ಯುರೋಪಿಯನ್ನರನ್ನು ನೇಮಿಸಿಕೊಳ್ಳುವಂತಿಲ್ಲ.

© KTBS NOT TO BE REPUBLISHED

5. ಭಾರತದ ಯಾವುದೇ ರಾಜ್ಯಗಳೊಂದಿಗೆ ಯುದ್ಧ ಅಥವಾ ಸಂಧಾನ ಮಾಡಿಕೊಳ್ಳಬೇಕಾದರೆ ಗವರ್ನರ್ ಜನರಲ್‌ನ ಸಮ್ಮತಿ ಬೇಕು.
6. ಇದಕ್ಕೆ ಪ್ರತಿಯಾಗಿ ಕಂಪನಿಯು ಆ ರಾಜ್ಯಕ್ಕೆ ಆಂತರಿಕ ಮತ್ತು ಬಾಹ್ಯ ರಕ್ಷಣೆಯನ್ನು ಒದಗಿಸುವುದು.

ಈ ನೀತಿಯಿಂದ ಬ್ರಿಟಿಷರ ಸೈನಿಕ ನಿರ್ವಹಣೆ ಸುಲಭವಾಯಿತು ಮತ್ತು ಭಾರತೀಯ ರಾಜ್ಯಗಳನ್ನು ನಿಯಂತ್ರಣದಲ್ಲಿಡಲು ಸಾಧ್ಯವಾಯಿತು. ಭಾರತೀಯ ರಾಜ್ಯಗಳನ್ನು ಆರ್ಥಿಕವಾಗಿ ತೀವ್ರ ಶೋಷಣೆಗೆ ಗುರಿಪಡಿಸಲಾಯಿತು. ಈ ಒಪ್ಪಂದಕ್ಕೆ ಸಹಿ ಮಾಡಿದ ಮೊದಲ ರಾಜ್ಯ ಹೈದರಾಬಾದ್ ಸಂಸ್ಥಾನ. ಅನಂತರ ಮೈಸೂರು, ಔದ್, ತಂಜಾವೂರು, ಮರಾಠ, ಆರ್ಕಾಟ್, ಪೂನಾ, ಬಿರಾರ್, ಗ್ವಾಲಿಯರ್ ಮೊದಲಾದ ರಾಜ್ಯಗಳು ಈ ಒಪ್ಪಂದಕ್ಕೆ ಒಳಪಟ್ಟವು.

**ಎರಡನೇ ಆಂಗ್ಲೋ–ಮರಾಠ ಯುದ್ಧ (1803–1805):** ಮರಾಠ ಮನೆತನಗಳ ನಾಯಕರ ನಡುವಿನ ಸಂಘರ್ಷವೇ ಈ ಯುದ್ಧಕ್ಕೆ ಕಾರಣವಾಯಿತು. ಹೋಳ್ಕರ್ ಮನೆತನದ ಯಶವಂತರಾವ್ ಒಂದು ಕಡೆಯಾದರೆ ಸಿಂಧಿಯಾ ಮನೆತನದ ದೌಲತ್ ರಾವ್ ಹಾಗೂ ಪೇಶ್ವೆ ಎರಡನೇ ಬಾಜಿರಾವ್ ಇನ್ನೊಂದು ಕಡೆಗಿದ್ದರು. 1802ರಲ್ಲಿ ಹೋಳ್ಕರ್ ಸೈನ್ಯವು ಸಿಂಧಿಯಾ ಮತ್ತು ಪೇಶ್ವೆಯ ಸೈನ್ಯವನ್ನು ಸೋಲಿಸಿತು. ಪೇಶ್ವೆ ಬ್ರಿಟಿಷರ ಸಹಾಯ ಯಾಚಿಸಿದನು. ಲಾರ್ಡ್ ವೆಲ್ಲೆಸ್ಲಿಗೆ ಮರಾಠರ ಆಂತರಿಕ ವಿಚಾರದಲ್ಲಿ ಪ್ರವೇಶಿಸಲು ಅವಕಾಶ ಸಿಕ್ಕಿತು. ಪೇಶ್ವೆಯು ಬೆಸ್ಸಿನ್ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ಸಹಾಯಕ ಸೈನ್ಯ ಪದ್ಧತಿಯನ್ನು ಒಪ್ಪಿದನು. ಪೇಶ್ವೆಯು ಸಹಾಯಕ ಸೈನ್ಯ ಪದ್ಧತಿಯನ್ನು ಒಪ್ಪಿದ್ದನ್ನು ವಿರೋಧಿಸಿ ಹೋಳ್ಕರ್, ಭೋಂಸ್ಲೆ, ಸಿಂಧಿಯಾ ಮೊದಲಾದ ಮರಾಠ ಮನೆತನಗಳು ಒಗ್ಗೂಡಿದವು. 1803–1805ರವರೆಗೆ ಮರಾಠ ಮನೆತನಗಳ ಸೇನೆಯನ್ನು ವೆಲ್ಲೆಸ್ಲಿಯು ಅನೇಕ ಯುದ್ಧಗಳಲ್ಲಿ ಮಣಿಸಿದನು. ಆದರೆ ಅವನ ಯುದ್ಧಪ್ರಿಯ ನೀತಿಯಿಂದ ಕಂಪನಿಗೆ ಸಾಲದ ಹೊರೆ ಹೆಚ್ಚಿತು. ಇದರಿಂದ ತೀವ್ರ ಟೀಕೆಗೆ ಒಳಗಾದ ವೆಲ್ಲೆಸ್ಲಿಯು ತನ್ನ ಹುದ್ದೆಗೆ ರಾಜಿನಾಮೆ ನೀಡಿ ಸ್ವದೇಶಕ್ಕೆ ಮರಳಿದನು. ಇದರಿಂದ ಆ ಪ್ರದೇಶದಲ್ಲಿ ತಾತ್ಕಾಲಿಕ ಶಾಂತಿ ನೆಲೆಸಿತು.

**ಮೂರನೇ ಆಂಗ್ಲೋ–ಮರಾಠ ಯುದ್ಧ (1817–1818):** ಮರಾಠ ಮನೆತನಗಳು ತಮ್ಮ ಘನತೆ ಮತ್ತು ಸ್ವಾತಂತ್ರ್ಯವನ್ನು ಉಳಿಸಿಕೊಳ್ಳಲು ಇನ್ನಿಲ್ಲದ ಪ್ರಯತ್ನ ನಡೆಸಿದವು. ಪೇಶ್ವೆ ಕೂಡ ಬ್ರಿಟಿಷರ ನಿಯಂತ್ರಣದಿಂದ ಮುಕ್ತಗೊಳ್ಳಲು ಹವಣಿಸುತ್ತಿದ್ದನು. 1817ರಲ್ಲಿ ಪೇಶ್ವೆಯು ಪೂನಾದಲ್ಲಿ ಬ್ರಿಟಿಷ್ ರೆಸಿಡೆನ್ಸಿಯ ಮೇಲೆ ದಾಳಿ ನಡೆಸಿ ಸುಟ್ಟನು. ನಾಗಪುರದ ಅಪ್ಪಾಸಾಹೇಬ ಮತ್ತು ಮಲ್ಹಾರರಾವ್ ಹೋಳ್ಕರ್ ಕೂಡ ಬ್ರಿಟಿಷರ ವಿರುದ್ಧ ದಂಗೆ ಎದ್ದು ಸೋತರು. ಅಂತಿಮವಾಗಿ ಪೇಶ್ವೆ ಎರಡನೇ ಬಾಜಿರಾಯನು ಬ್ರಿಟಿಷರ ವಿರುದ್ಧ 1818ರಲ್ಲಿ ಕೋರೇಗಾವ್ ಮತ್ತು ಅಷ್ಟಿ ಯುದ್ಧಗಳಲ್ಲಿ ಸೋತು ಶರಣಾದನು. ಬ್ರಿಟಿಷರು ಪೇಶ್ವೆ ಪದವಿಯನ್ನು ರದ್ದುಗೊಳಿಸಿ ಬಾಜಿರಾಯನಿಗೆ ವಿಶ್ರಾಂತಿ ವೇತನ ನೀಡಿದರು. ಬದಲಿಗೆ ಶಿವಾಜಿಯ ವಂಶಸ್ಥ ಪ್ರತಾಪಸಿಂಹನನ್ನು ಸಣ್ಣ ರಾಜ್ಯ ಸತಾರಾದಲ್ಲಿ ಪ್ರತಿಷ್ಠಾಪಿಸಿ, ಮರಾಠರ ಸಾಂಪ್ರದಾಯಕ ಮುಖಂಡನಾಗಿಸುವ ಮೂಲಕ ಮರಾಠರ ಪ್ರತಿರೋಧವನ್ನು ನಿಗ್ರಹಿಸಿದರು.

NOT TO BE REPUBLISHED © KTBS

**ಬ್ರಿಟಿಷ್ ಅಧಿಕಾರದ ಕ್ರೋಢೀಕರಣ (1818–1857):** ಬ್ರಿಟಿಷರು 1818 ರಿಂದ 1857ರವರೆಗೆ ಅಖಂಡ ಭಾರತವನ್ನು ಗೆಲ್ಲುವ ಕಾರ್ಯವನ್ನು ಪೂರ್ಣಗೊಳಿಸಿದರು. ಈ ಅವಧಿಯಲ್ಲಿ ಪಂಜಾಬ್, ಸಿಂಧ್, ಔಧ್ ಮೊದಲಾದ ಪ್ರಮುಖ ರಾಜ್ಯಗಳನ್ನಲ್ಲದೆ ಅನೇಕ ಸಣ್ಣಪುಟ್ಟ ರಾಜ್ಯಗಳನ್ನೂ ಆಕ್ರಮಿಸಿದರು.

**ಆಂಗ್ಲೋ–ಸಿಖ್ ಯುದ್ಧಗಳು:** 1839ರಲ್ಲಿ ರಣಜಿತ್ ಸಿಂಗನು ಮರಣ ಹೊಂದಿದ ನಂತರ ಪಂಜಾಬಿನಲ್ಲಿ ರಾಜಕೀಯ ಅರಾಜಕತೆ ತಲೆ ಎತ್ತಿತು. 1809ರ 'ನಿರಂತರ ಮೈತ್ರಿ ಒಪ್ಪಂದ'ವನ್ನು ಉಲ್ಲಂಘಿಸಿ ಪಂಜಾಬನ್ನು ಆಕ್ರಮಿಸಲು ಬ್ರಿಟಿಷರು ಸಂಚು ರೂಪಿಸಿದರು. 1845ರ ಡಿಸೆಂಬರ್‌ನಲ್ಲಿ ಬ್ರಿಟಿಷರಿಗೂ ಪಂಜಾಬ್ ಸೈನ್ಯಕ್ಕೂ ಯುದ್ಧ ಆರಂಭವಾಯಿತು. ವಿದೇಶಿಯರಿಂದ ಇರಬಹುದಾದ ಅಪಾಯವನ್ನರಿತ ಹಿಂದೂ, ಮುಸಲ್ಮಾನ ಹಾಗೂ ಸಿಖ್ಖರೆಲ್ಲರೂ ಬ್ರಿಟಿಷರನ್ನು ಮಣಿಸಲು ಒಂದಾದರು. ಅಂತಿಮವಾಗಿ ಕೆಲವು ದೇಶದ್ರೋಹಿ ನಾಯಕರಿಂದ ಸೋಲೊಪ್ಪಬೇಕಾಯಿತು. ಅವಮಾನಕರ ಲಾಹೋರ್ ಒಪ್ಪಂದಕ್ಕೆ 1846ರಲ್ಲಿ ಸಹಿ ಹಾಕಬೇಕಾಯಿತು. ಅಂದಿನಿಂದ ಬ್ರಿಟಿಷ್ ರೆಸಿಡೆಂಟನು ಪಂಜಾಬಿನ ನಿಜವಾದ ಆಡಳಿತಗಾರನಾದನು. ಹೀಗೆ ಪಂಜಾಬ್ ಬ್ರಿಟಿಷ್ ಆಶ್ರಿತ ರಾಜ್ಯವಾಯಿತು.

1848ರಲ್ಲಿ ಪಂಜಾಬಿನ ಮೇಲೆ ನೇರ ಬ್ರಿಟಿಷ್ ಆಳ್ವಿಕೆಯನ್ನು ಹೇರಲು ಹೊರಟಾಗ ಸಿಖ್ಖರು ಪ್ರತಿಭಟಿಸಿದರು. ಈ ಪ್ರತಿಭಟನೆಗಳ ನೇತೃತ್ವವನ್ನು 'ಚಟ್ಟಾರ್ ಸಿಂಗ್ ಅಟ್ಟಾರಿವಾಲ' ಮತ್ತು 'ಮೂಲರಾಜ್' ಅವರು ಕ್ರಮವಾಗಿ ಲಾಹೋರ್ ಮತ್ತು ಮುಲ್ತಾನ್‌ಗಳಲ್ಲಿ ವಹಿಸಿದ್ದರು. ಮತ್ತೆ ಸಿಖ್ಖರಿಗೆ ಸೋಲಾಯಿತು. ಅಂತಿಮವಾಗಿ ಲಾರ್ಡ್ ಡಾಲ್‌ಹೌಸಿಯು ಪಂಜಾಬನ್ನು ಬ್ರಿಟಿಷ್ ಸಾಮ್ರಾಜ್ಯದಲ್ಲಿ ವಿಲೀನಗೊಳಿಸಿಕೊಂಡನು.

**ಡಾಲ್ ಹೌಸಿ ಮತ್ತು ದತ್ತು ಮಕ್ಕಳಿಗೆ ಹಕ್ಕಿಲ್ಲ ನೀತಿ :** 1848ರಲ್ಲಿ ಭಾರತಕ್ಕೆ ಗವರ್ನರ್ ಜನರಲ್ ಆಗಿ ಬಂದ ಡಾಲ್‌ಹೌಸಿಯು ಭಾರತದ ಎಲ್ಲ ದೇಶೀಯ ಸಂಸ್ಥಾನಗಳನ್ನು ಬ್ರಿಟಿಷ್ ಸಾಮ್ರಾಜ್ಯದಲ್ಲಿ ವಿಲೀನಗೊಳಿಸುವ ಅಂತಿಮ ಪ್ರಯತ್ನವನ್ನು ನಡೆಸಿದ. ಡಾಲ್‌ಹೌಸಿಯು ತನ್ನ ವಿಸ್ತರಣಾ ನೀತಿಯನ್ನು 'ದತ್ತು ಮಕ್ಕಳಿಗೆ ಹಕ್ಕಿಲ್ಲ' ಎಂಬ ನೀತಿಯ ಮೂಲಕ ಸಾಧಿಸಿದನು. ಈ ನೀತಿಯ ಪ್ರಕಾರ: 'ಯಾವನೇ ಒಬ್ಬ ಭಾರತೀಯ ರಾಜನು ಮಕ್ಕಳಿಲ್ಲದೆ ಮೃತನಾದರೆ, ಅವನು ದತ್ತು ತೆಗೆದುಕೊಂಡಿದ್ದ ಪುತ್ರನಿಗೆ ಉತ್ತರಾಧಿಕಾರತ್ವದ ಹಕ್ಕಿರಲಿಲ್ಲ'. ಅಂತಹ ರಾಜ್ಯಗಳನ್ನು ಬ್ರಿಟಿಷ್ ಸಾಮ್ರಾಜ್ಯದಲ್ಲಿ ವಿಲೀನಗೊಳಿಸಿಕೊಳ್ಳಲಾಗುತ್ತಿತ್ತು. ಈ ನೀತಿಗೆ ಒಳಪಟ್ಟ ರಾಜ್ಯಗಳಲ್ಲಿ ಸತಾರ, ಜೈಪುರ್, ಸಂಬಲ್‌ಪುರ್, ಉದಯಪುರ್, ಝಾನ್ಸಿ, ನಾಗಪುರ ಮೊದಲಾದವುಗಳು ಪ್ರಮುಖವಾದವುಗಳಾಗಿವೆ. ಈ ರಾಜ್ಯಗಳ ರಾಜರಿಗೆ ಮಕ್ಕಳಿಲ್ಲದಿರುವುದನ್ನು ಮೊದಲೇ ಅರಿತಿದ್ದ ಬ್ರಿಟಿಷ್ ಗೌರ್ನರ್ ಜನರಲ್‌ನು ಈ ನೀತಿಯನ್ನು ರಾಜಕೀಯ ಅಸ್ತ್ರವಾಗಿ ಜಾರಿಗೊಳಿಸಿದನು.

ಡಾಲ್‌ಹೌಸಿಯ ತಡೆಯಿಲ್ಲದ ರಾಜ್ಯಾಕ್ರಮಣದ ನಡೆಯಿಂದ ಭಾರತೀಯ ರಾಜರು ಮಾತ್ರವಲ್ಲ, ಅವರ ಬಗೆಗೆ ಸಹಾನುಭೂತಿಯುಳ್ಳ ಸಾಮಾನ್ಯ ಜನವರ್ಗವು ಕೂಡ ಬ್ರಿಟಿಷ್‌ರ ವಿರುದ್ಧ ಮಲೆತು ನಿಂತಿತು. ಮಡುಗಟ್ಟಿದ ಆಕ್ರೋಶ ಮತ್ತು ರಾಜಾಭಿಮಾನದ ಕಿಚ್ಚು ಬ್ರಿಟಿಷ್ ಪ್ರಭುತ್ವದ ವಿರುದ್ಧ ಬಂಡೇಳುವಂತೆ ಮಾಡಿತು. ಇದರ ಪರಿಣಾಮವಾಗಿಯೇ 1857ರ ಭಾರತದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮವು ಸ್ಫೋಟಗೊಂಡಿತ್ತು.

NOT TO BE REPUBLISHED ©KTBS

**ನಿಮಗಿದು ತಿಳಿದಿರಲಿ :**

***ರಣಜಿತ್ ಸಿಂಗ್ :*** *1780ರಲ್ಲಿ ಜನಿಸಿದ ರಣಜಿತ್ ಸಿಂಗನು ಸಿಖ್‌ರ 12 ಮಿಸ್ಲ್(ಒಕ್ಕೂಟ)ಗಳಲ್ಲಿ ಒಂದಾದ ಸುಖರ್‌ಚಾಕೀಯಾ ಮಿಸ್ಲ್‌ನ ನಾಯಕ ಮಹಾಸಿಂಗ್‌ನ ಮಗ. ಹತ್ತನೇ ವಯಸ್ಸಿನಲ್ಲಿಯೇ ತಂದೆಯನ್ನು ಕಳೆದುಕೊಂಡನು. ಅವನು ಸಣ್ಣ ಪ್ರದೇಶದ ಒಕ್ಕೂಟದ ನಾಯಕನಾಗಿದ್ದನು. ಕಾಬೂಲಿನ ಜಮಾನ್ ಷಾ ಭಾರತದ ಮೇಲೆ ದಂಡಯಾತ್ರೆ ಕೈಗೊಂಡಾಗ ರಣಜಿತನು ಅವನಿಗೆ ಸಲ್ಲಿಸಿದ ಸೇವೆಗೆ ಮೆಚ್ಚಿ 'ರಾಜಾ' ಎಂಬ ಪದವಿಯೊಂದಿಗೆ ಲಾಹೋರಿನ ರಾಜ್ಯಪಾಲನಾಗಿ ನೇಮಕಗೊಂಡನು. ಆಗ ಅವನಿಗೆ ಹತ್ತೊಂಬತ್ತು ವರ್ಷ. ನಂತರ ವಿಸ್ಮಯಕಾರಿ ರೀತಿಯಲ್ಲಿ ಪ್ರಬಲನಾಗಿ ಬೆಳೆದ. ಸಿಖ್‌ಸಮುದಾಯದ ಮೇಲೆ ಸಂಪೂರ್ಣ ಪರಮಾಧಿಕಾರ ಪಡೆಯುವುದೇ ಅವನ ಪರಮ ಧ್ಯೇಯವಾಗಿತ್ತು. ಸಟ್ಲೇಜ್ ನದಿಯ ಪಶ್ಚಿಮ ಭಾಗಗಳ ಎಲ್ಲ ಸಿಖ್ ಪ್ರಮುಖರನ್ನೂ ತನ್ನ ನಿಯಂತ್ರಣಕ್ಕೆ ತೆಗೆದುಕೊಂಡು ಪಂಜಾಬಿನಲ್ಲಿ ತನ್ನದೇ ಸ್ವಂತ ರಾಜ್ಯ ಸ್ಥಾಪಿಸಿದ. 1809ರಲ್ಲಿ ಅಮೃತಸರದಲ್ಲಿ ಇಂಗ್ಲಿಷರೊಡನೆ 'ನಿರಂತರ ಮೈತ್ರಿ' ಒಪ್ಪಂದಕ್ಕೆ ಸಹಿಹಾಕಿದನು. ಯುರೋಪಿಯನ್ ಮಾದರಿಯಲ್ಲಿ ಸೈನ್ಯವನ್ನು ಸಂಘಟಿಸಿ ತರಬೇತುಗೊಳಿಸಿದನು. ಇವನ ಸೈನ್ಯವು ಕೇವಲ ಸಿಖ್‌ರಿಗೆ ಸೀಮಿತಗೊಂಡಿರದೆ ಗೂರ್ಖಾಗಳು, ಬಿಹಾರಿಗಳು, ಪಠಾಣರು, ಮುಸಲ್ಮಾನರಿಂದ ಕೂಡಿತ್ತು. ಲಾಹೋರಿನಲ್ಲಿ ಫಿರಂಗಿಗಳನ್ನು ತಯಾರಿಸಲು ಎರಕ ಹೊಯ್ಯುವ ಕಾರ್ಖಾನೆಯನ್ನು ತೆರೆದನು. ಅಂದಿನ ಕಾಲದಲ್ಲಿದ್ದ ಭಾರತೀಯ ರಾಜರ ಸೈನ್ಯಗಳಲ್ಲಿಯೇ ರಣಜಿತ್ ಸಿಂಗನ ಸೈನ್ಯ ಅತ್ಯುತ್ತಮವಾಗಿತ್ತು. ಜಾತ್ಯತೀತ ಮನೋಭಾವದವನೂ, ಉದಾರ ಹೃದಯಿಯೂ ಆದ ರಣಜಿತ್ ಸಿಂಗನು ಸಿಖ್ ಗುರುಗಳನ್ನಲ್ಲದೆ ಹಿಂದೂ ಮತ್ತು ಮುಸಲ್ಮಾನ ಗುರುಗಳನ್ನೂ ಪೋಷಿಸುತ್ತಿದ್ದನು. ಎಲ್ಲ ಧರ್ಮಿಯರೂ ಅವನ ಆಡಳಿತದ ಉನ್ನತ ಸ್ಥಾನದಲ್ಲಿದ್ದರು. ಬ್ರಿಟಿಷರನ್ನು ಎದುರು ಹಾಕಿಕೊಳ್ಳದೆ ಸಿಖ್ ರಾಜ್ಯವನ್ನು ರಕ್ಷಿಸುವಲ್ಲಿ ಯಶಸ್ವಿಯಾದನು. ಅದೇ ರೀತಿ ಬ್ರಿಟಿಷರು ವಾಯುವ್ಯದ ಭಾಗದಿಂದ ನಡೆಯಬಹುದಾದ ಸಂಭಾವ್ಯ ದಾಳಿಗಳನ್ನು ತಡೆಯಲು ರಣಜಿತ್ ಸಿಂಗನ ರಾಜ್ಯದಂತಹ ರಕ್ಷಣಾ ರಾಜ್ಯವೊಂದರ (ಬಫರ್ ಸ್ಟೇಟ್) ಅವಶ್ಯಕತೆ ಇತ್ತು. ಒಟ್ಟಾರೆ, ಸ್ವತಂತ್ರ ರಾಜ್ಯವೊಂದನ್ನು ಕಟ್ಟಿ ಕೊನೆಯವರೆಗೂ ಸ್ವತಂತ್ರವಾಗಿಯೇ ಆಳಿ 1839ರಲ್ಲಿ ರಣಜಿತ್ ಸಿಂಗ್ ನಿಧನ ಹೊಂದಿದನು.*

©KTBS NOT TO BE REPUBLISHED

## ಅಭ್ಯಾಸಗಳು

**I. ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಉತ್ತರಗಳಿಂದ ಭರ್ತಿಮಾಡಿ.**

1. ಮೊದಲನೇ ಆಂಗ್ಲೋ–ಮರಾಠ ಯುದ್ಧದ ಅಂತ್ಯದಲ್ಲಿ ಮರಾಠರು ಮತ್ತು ಬ್ರಿಟಿಷರ ಮಧ್ಯ ________________ ಒಪ್ಪಂದ ಆಯಿತು.
2. ಸಹಾಯಕ ಸೈನ್ಯ ಪದ್ಧತಿಯನ್ನು ಜಾರಿಗೆ ತಂದವನು ________________ .
3. ದತ್ತು ಮಕ್ಕಳಿಗೆ ಹಕ್ಕಿಲ್ಲ ಎಂಬ ನೀತಿಯನ್ನು ________________ ರಲ್ಲಿ ಜಾರಿಗೆ ತರಲಾಯಿತು.
4. ದತ್ತು ಮಕ್ಕಳಿಗೆ ಹಕ್ಕಿಲ್ಲವೆಂಬ ನೀತಿಯನ್ನು ಜಾರಿಗೆ ತಂದವನು ________________ .

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿ.**

1. ಮೊದಲನೇ ಆಂಗ್ಲೋ-ಮರಾಠ ಯುದ್ಧಕ್ಕೆ ಕಾರಣಗಳನ್ನು ವಿವರಿಸಿ.
2. ಸಹಾಯಕ ಸೈನ್ಯ ಪದ್ಧತಿಯ ನಿಬಂಧನೆಗಳಾವುವು? ವಿವರಿಸಿ.
3. ಮೂರನೇ ಆಂಗ್ಲೋ-ಮರಾಠ ಯುದ್ಧವನ್ನು ವಿವರಿಸಿ.
4. ಬ್ರಿಟಿಷರ ಅಧಿಕಾರ ವಿಸ್ತರಣೆಗೆ ದತ್ತು ಮಕ್ಕಳಿಗೆ ಹಕ್ಕಿಲ್ಲ ಎಂಬ ನೀತಿಯು ಹೇಗೆ ಸಹಕಾರಿಯಾಯಿತು?
5. ದತ್ತು ಮಕ್ಕಳಿಗೆ ಹಕ್ಕಿಲ್ಲ ನೀತಿಗೆ ಒಳಪಟ್ಟ ರಾಜ್ಯಗಳಾವುವು?

**III. ಚಟುವಟಿಕೆ :**

1. ಬ್ರಿಟಿಷರು ಸಾಮ್ರಾಜ್ಯ ವಿಸ್ತರಣೆ ಮಾಡುವಲ್ಲಿ ಅನುಸರಿಸಿದ ತಂತ್ರಗಾರಿಕೆಯ (Strategy) ಬಗ್ಗೆ ವಿಶ್ಲೇಷಿಸಿ ಪ್ರಬಂಧ ಬರೆಯಿರಿ.

* * * *

@KTBS
NOT TO BE REPUBLISHED

G5Z7L1

## ಅಧ್ಯಾಯ – 3

# ಭಾರತದಲ್ಲಿ ಬ್ರಿಟಿಷ್ ಆಳ್ವಿಕೆಯ ಪರಿಣಾಮಗಳು

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- *ಆಡಳಿತ ಮತ್ತು ನ್ಯಾಯಾಂಗ ವ್ಯವಸ್ಥೆ – ನಾಗರಿಕ ಸೇವೆಗಳು, ನ್ಯಾಯಾಂಗ ವ್ಯವಸ್ಥೆ, ಪೊಲೀಸ್ ವ್ಯವಸ್ಥೆ, ಸೈನ್ಯ ವ್ಯವಸ್ಥೆ.*
- *ಭೂ ಕಂದಾಯ ನೀತಿಗಳು – ಖಾಯಂ ಜಮೀನ್ದಾರಿ ಪದ್ಧತಿ, ಮಹಲ್‌ವಾರಿ ಪದ್ಧತಿ, ರೈತವಾರಿ ಪದ್ಧತಿ.*
- *ಆಧುನಿಕ ಶಿಕ್ಷಣ – ಲಾರ್ಡ್ ಮೆಖಾಲೆ, ವುಡ್ಸನ ಆಯೋಗ (1854).*
- *ಬ್ರಿಟಿಷ್ ಆಳ್ವಿಕೆ ಕಾಲದ ಕಾಯ್ದೆಗಳು – ರೆಗ್ಯುಲೆಂಟಿಂಗ್ ಕಾಯ್ದೆ, ಪಿಟ್ಸ್ ಇಂಡಿಯಾ ಕಾಯ್ದೆ, ಚಾರ್ಟರ್ ಕಾಯ್ದೆಗಳು.*

© KTBS NOT TO BE REPUBLISHED

ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಯು ಆರಂಭದಲ್ಲಿ ಕೇವಲ ವ್ಯಾಪಾರಿ ಕಂಪನಿಯಾಗಿ ತನ್ನ ವಾಣಿಜ್ಯ ಹಿತಾಸಕ್ತಿಗಳನ್ನು ಮಾತ್ರ ಪೂರೈಸಿಕೊಳ್ಳುವ ಕೆಲಸ ಮಾಡಿತು. ನೂರಾರು ರಾಜಮನೆತನಗಳಲ್ಲಿ ಹಂಚಿಹೋಗಿದ್ದ ಭಾರತದ ಪರಿಸ್ಥಿತಿಯನ್ನು ಅವಲೋಕಿಸಿದ ಬ್ರಿಟಿಷರು ಆ ಪರಿಸ್ಥಿತಿಯನ್ನು ತಮ್ಮ ರಾಜಕೀಯ ಏಳಿಗೆಗೆ ಬಳಸಿಕೊಂಡರು. ಪರಸ್ಪರ ಕಚ್ಚಾಡುತ್ತಿದ್ದ ರಾಜರ ನಡುವೆ ಒಡೆದು ಆಳುವ ನೀತಿಯನ್ನು ಬಳಸಿಕೊಂಡು ಅವರೆಲ್ಲರನ್ನೂ ಕ್ರಮೇಣ ತಮ್ಮ ಅಧೀನಕ್ಕೆ ತೆಗೆದುಕೊಂಡರು. ಅಧೀನಕ್ಕೆ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ 'ಸಂಧಾನ' ಮತ್ತು 'ಯುದ್ಧ'ಗಳ ಮಾರ್ಗಗಳನ್ನು ಸಮರ್ಥವಾಗಿ ಬಳಸಿಕೊಂಡರು.

ವಿವಿಧ ಉಪಾಯಗಳನ್ನು ಬಳಸಿ ಭಾರತವನ್ನು ರಾಜಕೀಯವಾಗಿ ತಮ್ಮ ಅಧೀನಕ್ಕೆ ತೆಗೆದುಕೊಂಡ ನಂತರ ಅದನ್ನು ಶಾಶ್ವತವಾಗಿ ತಮ್ಮಲ್ಲಿ ಹೇಗೆ ಉಳಿಸಿಕೊಳ್ಳಬೇಕೆನ್ನುವುದನ್ನು ಆಲೋಚಿಸತೊಡಗಿದರು. ಭಾರತ ಒಂದು ದೇಶವೆಂಬ ಸಾಮೂಹಿಕ ಕಲ್ಪನೆಯು ಇಲ್ಲದಿದ್ದ ಆ ಸಂದರ್ಭದಲ್ಲಿ ಅದು ವಿವಿಧ ರಾಜ್ಯಾಡಳಿತಗಳಲ್ಲಿ ಹರಿದು ಹಂಚಿಹೋಗಿತ್ತು. ಅನೇಕ ರಾಜ್ಯಗಳನ್ನು ವಿವಿಧ ಕಾರಣಗಳಿಂದ ಒಂದುಗೂಡಿಸಿ ಬ್ರಿಟಿಷರು ಏಕರೂಪ ರಾಜಕೀಯ ವ್ಯವಸ್ಥೆಗೆ ಮತ್ತು ಏಕರೂಪ ಆಡಳಿತ ವ್ಯವಸ್ಥೆಗೆ ಒಳಪಡಿಸಿದರು. ಶಿಕ್ಷಣ, ನ್ಯಾಯಾಂಗ ವ್ಯವಸ್ಥೆ, ಭೂ ಕಂದಾಯ, ವ್ಯಾಪಾರ, ಕೃಷಿ ಮುಂತಾದ ಕ್ಷೇತ್ರಗಳಲ್ಲಿ ಹೊಸ ಆಡಳಿತಾತ್ಮಕ ವ್ಯವಸ್ಥೆಯನ್ನು ಜಾರಿಗೊಳಿಸುವ ಮೂಲಕ ಅವರು ಕಟ್ಟಿದ ರಾಜ್ಯ ವ್ಯವಸ್ಥೆಗೆ ಏಕರೂಪವನ್ನು ನೀಡುವಲ್ಲಿ ಸಫಲರಾದರು. ಈ ಬಗೆಯ ಆಡಳಿತವನ್ನು ರೂಪಿಸುವಾಗ ತಮ್ಮ ಆರ್ಥಿಕ ಹಿತಾಸಕ್ತಿಯನ್ನು ಸಂರಕ್ಷಿಸಿಕೊಳ್ಳುವುದನ್ನು ಮರೆಯಲಿಲ್ಲ. ಈ ನಿಟ್ಟಿನಲ್ಲಿ ಕಂಪನಿಯು ಆಡಳಿತದ ಕ್ಷೇತ್ರದಲ್ಲಿ ವಿವಿಧ ಪ್ರಯೋಗಗಳನ್ನು ಜಾರಿಗೊಳಿಸಿತು.

## ಆಡಳಿತ ಮತ್ತು ನ್ಯಾಯಾಂಗ ವ್ಯವಸ್ಥೆ

**ನಾಗರಿಕ ಸೇವೆಗಳು :** ಲಾರ್ಡ್ ಕಾರ್ನ್‌ವಾಲೀಸನು ನಾಗರಿಕ ಸೇವಾ ವ್ಯವಸ್ಥೆಯನ್ನು ಆಡಳಿತದಲ್ಲಿ ಜಾರಿಗೆತಂದನು. ಈಸ್ಟ್ ಇಂಡಿಯಾ ಕಂಪನಿಯು ವ್ಯಾಪಾರ ನಡೆಸುವ ಸಲುವಾಗಿ ನೌಕರರನ್ನು ನೇಮಕ ಮಾಡಿಕೊಳ್ಳುವ ಪದ್ಧತಿಯನ್ನು ಮೊದಲಿನಿಂದಲೂ ಪಾಲಿಸಿಕೊಂಡು ಬಂದಿತ್ತು. ಕಂಪನಿಯು ಈ ನೌಕರರಿಗೆ ಖಾಸಗಿಯಾಗಿ ವ್ಯಾಪಾರ ಮಾಡಿಕೊಳ್ಳಲು ಅನುಮತಿ ನೀಡಿತ್ತು. ಈ ಅವಕಾಶವನ್ನು

ಬಳಸಿಕೊಂಡ ನೌಕರರು ಅನೈತಿಕ ಮಾರ್ಗಗಳಲ್ಲಿ ಹಣ ಸಂಪಾದಿಸಿ ಕಡುಭ್ರಷ್ಟರಾದರು. ಇದನ್ನು ತಡೆಯುವ ಸಲುವಾಗಿ 1773ರಲ್ಲಿ ಇಂಗ್ಲೆಂಡಿನ ಸರಕಾರವು ರೆಗ್ಯುಲೇಟಿಂಗ್ ಕಾಯ್ದೆಯನ್ನು ಭಾರತದಲ್ಲಿ ಜಾರಿಗೊಳಿಸಿತು. ಕಾಯ್ದೆಯ ಹೆಸರೇ ಸೂಚಿಸುವಂತೆ ಅದರ ಉದ್ದೇಶ ನಿಯಂತ್ರಣವನ್ನು ಹೇರುವುದು.

1800ರಲ್ಲಿ ನಾಗರಿಕ ಸೇವೆಗೆ ಸೇರಬಯಸುವವರಿಗೆ ಶಿಕ್ಷಣವನ್ನು ನೀಡಲು ಕಾರ್ನ್ ವಾಲೀಸನು ಕಲ್ಕತ್ತಾದಲ್ಲಿ ಫೋರ್ಟ್ ವಿಲಿಯಂ ಕಾಲೇಜನ್ನು ಸ್ಥಾಪಿಸಿದನು. ಆದರೆ ಈಸ್ಟ್ ಇಂಡಿಯಾ ಕಂಪನಿಯ ನಿರ್ದೇಶಕರು ಇದಕ್ಕೆ ಬೆಂಬಲ ನೀಡಲಿಲ್ಲ. ಇದರ ಪರಿಣಾಮವೆಂದರೆ 1853ರವರೆಗೆ ನಾಗರಿಕ ಸೇವೆಯ ಎಲ್ಲಾ ನೇಮಕಾತಿಗಳನ್ನು ಈಸ್ಟ್ ಇಂಡಿಯಾ ಕಂಪನಿಯ ನಿರ್ದೇಶಕರೇ ಮಾಡಿದರು. 1853ರ ನಂತರ ನಾಗರಿಕ ಸೇವೆಗೆ ಮಾಡುವ ಎಲ್ಲಾ ನೇಮಕಾತಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕವೇ ಆಗಬೇಕೆಂಬ ತೀರ್ಮಾನವಾಯಿತು. ಇದರಿಂದ ಭಾರತೀಯರಿಗೆ ಹೆಚ್ಚಿನ ಪ್ರಯೋಜನವಾಗಲಿಲ್ಲ. ಜೊತೆಗೆ ಬ್ರಿಟಿಷರು ಭಾರತೀಯರ ಸಾಮರ್ಥ್ಯವನ್ನು ಅನುಮಾನಿಸಿ ನೋಡಿದರು. ಕಾರ್ನ್‌ವಾಲೀಸನು "ಹಿಂದೂಸ್ಥಾನದಲ್ಲಿರುವ ಪ್ರತಿಯೊಬ್ಬ ಮೂಲ ನಿವಾಸಿಯೂ ಭ್ರಷ್ಟ" ಎಂದು ಪ್ರತಿಪಾದಿಸಿದನು. ಇದರಿಂದಾಗಿ ಕೆಳದರ್ಜೆಯ ಉದ್ಯೋಗಗಳನ್ನು ಮಾತ್ರ ಭಾರತೀಯರಿಗೆ ನೀಡಲಾಯಿತು.

**ನ್ಯಾಯಾಂಗ ವ್ಯವಸ್ಥೆ :** ಮೊಘಲರಿಂದ ಬ್ರಿಟಿಷರಿಗೆ ಹಂತಹಂತವಾಗಿ ಅಧಿಕಾರ ಹಸ್ತಾಂತರದ ಸಂಕ್ರಮಣ ಕಾಲದಲ್ಲಿ ಹೊಸ ನ್ಯಾಯಾಂಗ ವ್ಯವಸ್ಥೆಯು ಭಾರತದಲ್ಲಿ ಬೇರು ಬಿಡಲು ಆರಂಭಿಸಿತು. 1764ರ ಬಕ್ಸಾರ್ ಕದನದ ನಂತರ ಮೊಘಲ್ ಚಕ್ರವರ್ತಿ ಎರಡನೇ ಷಾ ಅಲಂನು ದಿವಾನಿ ಹಕ್ಕೆಂಬ ಕಂದಾಯ ವಸೂಲಾತಿ ಹಕ್ಕನ್ನು ಬ್ರಿಟಿಷರಿಗೆ ನೀಡಿದನು. ಬಂಗಾಳದ ಪ್ರಾಂತ್ಯದಲ್ಲಿ ದ್ವಿ ಆಡಳಿತ ಜಾರಿಗೆ ಬಂದಿತು. ಇದನ್ನು ದ್ವಿ ಸರ್ಕಾರ ಎಂತಲೂ ಕರೆಯುತ್ತಾರೆ. ಇದರ ಪ್ರಕಾರ ಕಂದಾಯ ವಸೂಲಾತಿ, ನಾಗರಿಕ ಮತ್ತು ಅಪರಾಧ ನ್ಯಾಯ ನಿರ್ವಹಣಾ ವ್ಯವಸ್ಥೆಯನ್ನು ಭಾರತೀಯ ಅಧಿಕಾರಿಗಳಿಗೆ ನೀಡಲಾಯಿತು. ವಸೂಲಾದ ಕಂದಾಯದ ನಿರ್ವಹಣಾ ಆಡಳಿತವನ್ನು ಬ್ರಿಟಿಷರು ತಮ್ಮ ಬಳಿಯೇ ಇಟ್ಟುಕೊಂಡರು. ಕ್ರಮೇಣ ಬ್ರಿಟಿಷರು ಹೆಚ್ಚು ಕೇಂದ್ರೀಕೃತ ನ್ಯಾಯಾಂಗ ಪದ್ಧತಿಯನ್ನು ಜಾರಿಗೆ ತರಬೇಕೆಂದು ನಿರ್ಧರಿಸಿದರು. ಈ ಹೆಜ್ಜೆಯಿಂದ ಬ್ರಿಟಿಷರು ಮೊಘಲರ ಅಧಿಕಾರವನ್ನು ಹಿಂದಕ್ಕೆ ಸರಿಸಿ ತಾವೇ ಸಾರ್ವಭೌಮರಾಗತೊಡಗಿದರು. ಇದನ್ನು ಹೊಸ ನ್ಯಾಯಾಂಗ ವ್ಯವಸ್ಥೆಯನ್ನು ಜಾರಿಗೆ ತರುವುದರ ಮೂಲಕ ಸಾಧಿಸಿದರು.

1772ರಲ್ಲಿ ಗೌವರ್ನರ್ ಆಗಿ ಅಧಿಕಾರ ವಹಿಸಿಕೊಂಡ ವಾರನ್ ಹೇಸ್ಟಿಂಗ್ಸ್‌ನು ಜಾರಿಗೆ ತಂದ ಹೊಸ ಯೋಜನೆಯ ಪ್ರಕಾರ ಪ್ರತಿ ಜಿಲ್ಲೆಯು ಎರಡು ಬಗೆಯ ನ್ಯಾಯಾಲಯಗಳನ್ನು ಹೊಂದಿರಬೇಕಿತ್ತು. ಅವುಗಳೆಂದರೆ ; 'ದಿವಾನಿ ಅದಾಲತ್' ಎಂಬ ನಾಗರಿಕ ನ್ಯಾಯಾಲಯಗಳು ಮತ್ತು 'ಫೌಜದಾರಿ ಅದಾಲತ್' ಎಂಬ ಅಪರಾಧ ನ್ಯಾಯಾಲಯಗಳು. ಇಲ್ಲಿ ನಾಗರಿಕ ನ್ಯಾಯದಾನದ ಸಂದರ್ಭದಲ್ಲಿ ಹಿಂದೂಗಳಿಗೆ ಹಿಂದೂ ಶಾಸ್ತ್ರಗ್ರಂಥಗಳ ಪ್ರಕಾರ ಮತ್ತು ಮುಸ್ಲಿಮರಿಗೆ ಷರಿಯತ್ ಕಾನೂನುಗಳ ಪ್ರಕಾರ ನ್ಯಾಯದಾನ ನೀಡಲಾಗುತ್ತಿತ್ತು. ಅಪರಾಧ ಪ್ರಕರಣಗಳಿಗೆ ಬಂದಾಗ ಎಲ್ಲರಿಗೂ ಇಸ್ಲಾಂ ಕಾನೂನುಗಳ ಅನುಸಾರ ವಿಚಾರಣೆ ನಡೆಸಲಾಗುತ್ತಿತ್ತು. ಕ್ರಮೇಣ ಬ್ರಿಟಿಷ್ ಕಾನೂನುಗಳನ್ನು ಜಾರಿಗೊಳಿಸುವ ಮೂಲಕ ಅಪರಾಧ ಕಾನೂನುಗಳಲ್ಲಿ ಬದಲಾವಣೆ ತರಲಾಯಿತು. ನಾಗರಿಕ ನ್ಯಾಯಾಲಯಗಳು ಯೂರೋಪಿನ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದವು. ಅಪರಾಧ ನ್ಯಾಯಾಲಯಗಳು 'ಖಾಜಿ'ಗಳ ಅಧೀನದಲ್ಲಿದ್ದರೂ ಯುರೋಪಿಯನ್ನರ ಮೇಲ್ವಿಚಾರಣೆಯಲ್ಲಿಯೇ ಕಾರ್ಯನಿರ್ವಹಿಸಬೇಕಾಗಿತ್ತು.

**ಪೊಲೀಸ್ ವ್ಯವಸ್ಥೆ :** ಆಂತರಿಕ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ಜವಾಬ್ದಾರಿಯನ್ನು ಹೊತ್ತಿರುವ ವರ್ಗವೆ ಪೊಲೀಸರು. ಲಾರ್ಡ್ ಕಾರ್ನ್ ವಾಲೀಸನು ಪ್ರಥಮತಃ ವ್ಯವಸ್ಥಿತವಾದ

©KTBS NOT TO BE REPUBLISHED

ಪೊಲೀಸ್ ವಿಭಾಗವನ್ನು ಅಸ್ತಿತ್ವಕ್ಕೆ ತಂದನು. ಇವನು 'ಸೂಪರಿಟೆಂಡೆಂಟ್ ಆಫ್ ಪೊಲೀಸ್' (SP) ಎನ್ನುವ ಹೊಸ ಹುದ್ದೆಯನ್ನು ಸೃಷ್ಟಿಸಿದನು. 1793ರಲ್ಲಿ ಪ್ರತಿ ಜಿಲ್ಲೆಯನ್ನು 'ಠಾಣೆ'ಗಳನ್ನಾಗಿ ವಿಭಜಿಸಿ ಪ್ರತಿ ಠಾಣೆಯನ್ನು 'ಕೊತ್ವಾಲ'ರ ಅಧೀನದಲ್ಲೂ, ಹಳ್ಳಿಗಳು 'ಚೌಕಿದಾರ'ರ ಅಧೀನದಲ್ಲೂ ಇರುವಂತೆ ಮಾಡಿದನು. ಕೊತ್ವಾಲರುಗಳು ಹಳ್ಳಿಗಳ ಮಟ್ಟದಲ್ಲಿ ಕಳ್ಳತನ, ಅಪರಾಧಗಳು, ದರೋಡೆಗಳ ನಿಯಂತ್ರಣದ ಜವಾಬ್ದಾರಿಯನ್ನು ಹೊತ್ತಿದ್ದರು.

1770ರ ದಶಕದಲ್ಲಿ ಭೀಕರ ಕ್ಷಾಮಭೀತಿಯಿಂದ ಕಾನೂನು ಸುವ್ಯವಸ್ಥೆಯ ಸಮಸ್ಯೆ ವಿಷಮಗೊಳ್ಳತೊಡಗಿತು. ಇದರ ಪರಿಣಾಮವಾಗಿ ಇಡೀ ಪೊಲೀಸ್ ವ್ಯವಸ್ಥೆಯನ್ನು ಬ್ರಿಟಿಷ್ ಅಧಿಕಾರಿಗಳ ಅಧೀನಕ್ಕೊಳಪಡಿಸಲಾಯಿತು. 1781ರಲ್ಲಿ ಬ್ರಿಟಿಷ್ ಮ್ಯಾಜಿಸ್ಟ್ರೇಟ್‌ಗಳನ್ನು ನೇಮಕ ಮಾಡುವ ಪದ್ಧತಿ ಜಾರಿಗೊಂಡಿತು. ಪೊಲೀಸ್ ಅಧಿಕಾರಿಗಳು ಮ್ಯಾಜಿಸ್ಟ್ರೇಟ್‌ಗಳ ಅಧೀನಕ್ಕೊಳಪಟ್ಟರು. ಪೊಲೀಸ್ ವ್ಯವಸ್ಥೆಯು ನಿರಂತರ ಬದಲಾವಣೆಗೆ ಒಳಗಾಯಿತು. 1861ರಲ್ಲಿ 'ಪೊಲೀಸ್ ಕಾಯ್ದೆ'ಯನ್ನು ಜಾರಿಗೊಳಿಸಲಾಯಿತು. ಈ ಕಾಯ್ದೆಯೇ ಕಾನೂನು ಮತ್ತು ಸುವ್ಯವಸ್ಥೆ ಆಡಳಿತಕ್ಕೆ ಮುಖ್ಯ ಅಡಿಪಾಯವಾಯಿತು. ಆದರೆ ಅಧಿಕಾರಿಗಳ ನೇಮಕಾತಿಯಲ್ಲಿ ಭಾರತೀಯರಿಗೆ ಅವಕಾಶವಿರಲಿಲ್ಲ. 1902ರ ಪೊಲೀಸ್ ಕಮಿಷನ್ ಕಾಯ್ದೆಯು ವಿದ್ಯಾರ್ಹತೆಯನ್ನು ಪಡೆದವರನ್ನು ಅಧಿಕಾರಿ ಹುದ್ದೆಗೆ ನೇಮಿಸುವ ಅವಕಾಶವನ್ನು ಕಲ್ಪಿಸಿತು. ಇಷ್ಟಾದರೂ ಭಾರತೀಯರ ಬಗೆಗೆ ಇದ್ದ ತಾರತಮ್ಯ ಕಡಿಮೆಯಾಗಲಿಲ್ಲ.

**ಸೈನ್ಯ ವ್ಯವಸ್ಥೆ:** ಬ್ರಿಟಿಷರ ಕಾಲದ ಆಡಳಿತ ವ್ಯವಸ್ಥೆಯಲ್ಲಿ ಸೈನ್ಯವು ಆಧಾರಸ್ತಂಭವಾಗಿತ್ತು. ಭಾರತೀಯರನ್ನೇ ಸೈನ್ಯದಲ್ಲಿ ಸೇರಿಸಿಕೊಂಡು ಅವರ ನೆರವಿನಿಂದಲೇ ಬ್ರಿಟಿಷರು ಭಾರತವನ್ನು ತಮ್ಮ ಅಧೀನಕ್ಕೆ ತೆಗೆದುಕೊಂಡರು. ಸೈನ್ಯದ ಶಕ್ತಿಯನ್ನು ಬಳಸಿಕೊಂಡು ಭಾರತದ ಒಳಗಡೆಯ ತಮ್ಮ ವಿರೋಧ ಶಕ್ತಿಗಳಿಂದ ಮತ್ತು ವಿದೇಶಿ ಶಕ್ತಿಗಳಿಂದ ತಮ್ಮ ಸಾಮ್ರಾಜ್ಯವನ್ನು ರಕ್ಷಿಸಿಕೊಂಡರು. ಅಧಿಕಾರಿಗಳು ಬ್ರಿಟಿಷರೇ ಆಗಿದ್ದರು. ಭಾರತೀಯರಿಗೆ ಲಭಿಸುತ್ತಿದ್ದ ಅತ್ಯುನ್ನತ ಹುದ್ದೆಯೆಂದರೆ ಸುಬೇದಾರ್ ಸ್ಥಾನ. ಬಹುತೇಕ ಭಾರತೀಯ ಸೈನಿಕರು ಕೂಲಿ ಸೈನಿಕರಾಗಿದ್ದರು. 1857ರ ಘಟನೆಯ ನಂತರ ಪೀಲ್ ಎಂಬುವವರ ನೇತೃತ್ವದಲ್ಲಿ ಸಮಿತಿಯೊಂದನ್ನು ರಚಿಸಿ ಶಿಫಾರಸ್ಸುಗಳನ್ನು ಬ್ರಿಟಿಷ್ ಸರಕಾರ ಪಡೆಯಿತು. ಈ ಶಿಫಾರಸ್ಸುಗಳ ಆಧಾರದ ಮೇಲೆ ಸೈನಿಕ ವ್ಯವಸ್ಥೆಯನ್ನು ಮರು ವಿನ್ಯಾಸಗೊಳಿಸಲಾಯಿತು.

## ಭೂಕಂದಾಯ ನೀತಿಗಳು

ಬ್ರಿಟಿಷರು ಬಂಗಾಳ ಪ್ರಾಂತ್ಯವನ್ನು ತಮ್ಮ ಕೇಂದ್ರವಾಗಿಟ್ಟುಕೊಂಡರು. ಈಸ್ಟ್ ಇಂಡಿಯಾ ಕಂಪೆನಿಯು ಬ್ರಿಟಿಷ್ ಸರ್ಕಾರಕ್ಕೆ ವಾರ್ಷಿಕವಾಗಿ ನಾಲ್ಕು ಲಕ್ಷ ಪೌಂಡ್‌ಗಳನ್ನು ಪಾವತಿಸಬೇಕಿತ್ತು. ಈ ಹಿನ್ನೆಲೆಯಲ್ಲಿ ಕಂಪೆನಿಯು ತನ್ನ ಆರ್ಥಿಕ ಹಿತಸಾಕ್ತಿಗಳನ್ನು ಸುಸ್ಥಿರಗೊಳಿಸಿಕೊಳ್ಳಬೇಕಿತ್ತು. ಇದರಿಂದಾಗಿ ಹೊಸ ಬಗೆಯ ಕಂದಾಯ ನೀತಿಗಳನ್ನು ಜಾರಿಗೊಳಿಸಿದರು.

**ಖಾಯಂ ಜಮೀನ್ದಾರಿ ಪದ್ಧತಿ :** ವಾರ್ಷಿಕವಾಗಿ ನಿರ್ದಿಷ್ಟ ಕಂದಾಯದ ಹಣವನ್ನು ಪಡೆಯಲು ಲಾರ್ಡ್ ಕಾರ್ನ್‌ವಾಲೀಸನು 1793ರಲ್ಲಿ ಬಂಗಾಳ ಮತ್ತು ಬಿಹಾರ ಪ್ರಾಂತ್ಯಗಳಲ್ಲಿ ಹೊಸ ಕಂದಾಯ ಪದ್ಧತಿಯನ್ನು ಜಾರಿಗೊಳಿಸಿದನು. ಇದನ್ನು ಖಾಯಂ ಜಮೀನ್ದಾರಿ ಪದ್ಧತಿ ಎಂದು ಕರೆಯಲಾಯಿತು. ಈ ಪದ್ಧತಿಯಲ್ಲಿ ಜಮೀನ್ದಾರನು ಭೂಮಾಲೀಕನಾದನು. ಈ ಹೊಸ ಯೋಜನೆಯ ಪ್ರಕಾರ ಜಮೀನ್ದಾರನು ಪ್ರತಿವರ್ಷವೂ ನಿರ್ದಿಷ್ಟ ದಿನಕ್ಕೆ ಮೊದಲೇ ಅವನು ಒಪ್ಪಿಕೊಂಡಿದ್ದ ಕಂದಾಯದ ಮೊತ್ತವನ್ನು ಸರಕಾರಕ್ಕೆ ಸಲ್ಲಿಸಬೇಕಿತ್ತು. ಭೂಮಾಲೀಕನಿಗೆ ಈ ಪದ್ಧತಿಯಿಂದ ಹೆಚ್ಚಿನ ಲಾಭವಾಯಿತು.

© KTBS NOT TO BE REPUBLISHED

ಏಕೆಂದರೆ ಸರಕಾರಕ್ಕೆ ಸಲ್ಲಿಸಬೇಕಾದ ಹಣದ ಮೊತ್ತಕ್ಕಿಂತ ಹೆಚ್ಚಿಗೆ ವಸೂಲು ಮಾಡಿದ ಹಣವನ್ನು ಅವನೇ ಇಟ್ಟುಕೊಳ್ಳಬಹುದಾಗಿತ್ತು. ಬರಗಾಲ (ಅನಾವೃಷ್ಟಿ) ಅಥವಾ ವಿಪರೀತ ಮಳೆ ಅತಿವೃಷ್ಟಿಯ ಕಾರಣದಿಂದ ಕಂದಾಯವನ್ನು ವಸೂಲಿ ಮಾಡಲು ಸಾಧ್ಯವಾಗದೆ ಸರಕಾರಕ್ಕೆ ಸಲ್ಲಿಸಬೇಕಾದ ಹಣದ ಮೊತ್ತವನ್ನು ಸಲ್ಲಿಸಲಾಗದಿದ್ದರೆ, ಬ್ರಿಟಿಷ್ ಸರಕಾರವೂ ಭೂಮಿಯ ಒಡೆತನವನ್ನು ಅವನಿಂದ ಕಸಿದುಕೊಳ್ಳುತ್ತಿತ್ತು. ಈ ಪದ್ಧತಿಯಿಂದ ಬ್ರಿಟಿಷರಿಗೆ ಮತ್ತು ಜಮೀನ್ದಾರರಿಗೆ ಲಾಭವಾಯಿತೇ ವಿನಾ ರೈತರಿಗಾಗಲಿಲ್ಲ. ಬ್ರಿಟಿಷರು ತಮಗೆ ನೆರವಾಗುವ ಹೊಸ ಸಾಮಾಜಿಕ ವರ್ಗವಾದ ಜಮೀನ್ದಾರರನ್ನು ಸೃಷ್ಟಿ ಮಾಡಿದರು. ರೈತರು, ರೈತ ಕೂಲಿಕಾರ್ಮಿಕರು ಜಮೀನ್ದಾರರ ಭೂಮಿಯಲ್ಲಿ ಕೆಲಸ ಮಾಡಲು ನಿರಂತರ ಅವಕಾಶಗಳೂ ಸಿಗದೆ ಬಹುಮುಖಿ ಶೋಷಣೆಗೆ ಒಳಗಾದರು ಅತಂತ್ರ ಸ್ಥಿತಿಯಲ್ಲೇ ಬದುಕನ್ನು ಕಳೆಯತೊಡಗಿದರು. ಈ ಪದ್ಧತಿಯು ಕ್ರಮೇಣ ಒರಿಸ್ಸಾ, ಆಂಧ್ರ ಮತ್ತು ವಾರಣಾಸಿ ಪ್ರಾಂತ್ಯಗಳಿಗೆ ವಿಸ್ತರಣೆಯಾಯಿತು. ಚಾರ್ಲ್ಸ್ ಮೆಟಕಾಫ್ ಹೇಳುವಂತೆ ಬ್ರಿಟಿಷ್ ಭೂಕಂದಾಯ ನೀತಿಗಳಿಂದ "ಭಾರತದ ರೈತರು ಸಾಲದಲ್ಲೇ ಹುಟ್ಟಿ, ಸಾಲದಲ್ಲೇ ಬದುಕಿ, ಸಾಲದಲ್ಲೇ ಸತ್ತರು".

**ಮಹಲ್ವಾರಿ ಪದ್ಧತಿ :** ಉತ್ತರ ಪ್ರದೇಶ, ಮಧ್ಯಪ್ರದೇಶದ ಅನೇಕ ಭಾಗಗಳಲ್ಲಿ, ಪಂಜಾಬ್ ಮತ್ತು ದೆಹಲಿ ಪ್ರಾಂತ್ಯಗಳಲ್ಲಿ ಮಹಲ್ಲುಗಳೇ ಸಾಮೂಹಿಕ ಒಪ್ಪಂದಗಳನ್ನು ಮಾಡಿಕೊಂಡು, ಸರಕಾರಕ್ಕೆ ತೆರಿಗೆಯನ್ನು ಸಲ್ಲಿಸುವ ಪದ್ಧತಿಯನ್ನು ಜಾರಿಗೆ ತರಲಾಯಿತು. ಈ ಪದ್ಧತಿಯನ್ನು ಆರ್.ಎಂ. ಬರ್ಡ್ ಮತ್ತು ಜೇಮ್ಸ್ ಥಾಮ್ಸನ್ ಪ್ರಯೋಗಿಸಿದರು. 'ಮಹಲ್' ಎಂದರೆ ತಾಲ್ಲೂಕು ಎಂದರ್ಥ. ಪ್ರಾಂತ್ಯದಿಂದ ಪ್ರಾಂತ್ಯಕ್ಕೆ ಈ ಪದ್ಧತಿಯ ಅನುಷ್ಠಾನದಲ್ಲಿ ವ್ಯತ್ಯಾಸಗಳಿದ್ದವು. ದೊಡ್ಡ ಮತ್ತು ಸಣ್ಣ ಪ್ರಮಾಣದ ಜಮೀನ್ದಾರರು ಈ ಪದ್ಧತಿಯ ಭಾಗವಾಗಿದ್ದರು. ಕಂಪನಿಯ ಸರ್ಕಾರದ ಅಧಿಕಾರಿಗಳು ಜಮೀನಿನಲ್ಲಿ ಆಗುವ ಉತ್ಪಾದನೆಗಿಂತಲೂ ಹೆಚ್ಚಿನ ಮೊತ್ತದ ವಾರ್ಷಿಕ ಪಾವತಿಗಳನ್ನು ನಿರ್ಧರಿಸಿದ್ದರಿಂದ ಅನೇಕ ಜಮೀನ್ದಾರರು ತಮ್ಮ ಭೂಮಾಲಿಕತ್ವವನ್ನು ಕಳೆದುಕೊಂಡರು. ಅವರನ್ನೇ ನೆಚ್ಚಿ ಬದುಕುತ್ತಿದ್ದ ಸಣ್ಣ ಕೃಷಿಕರು, ಕೃಷಿ ಕೂಲಿಕಾರರು ನಿರ್ಗತಿಕರಾದರು.

**ರೈತವಾರಿ ಪದ್ಧತಿ :** ರೈತವಾರಿ ಪದ್ಧತಿಯನ್ನು ಮೊದಲಿಗೆ ಒಂದು ಪ್ರಯೋಗವಾಗಿ ಬಾರಮಹಲ್ ಪ್ರಾಂತ್ಯದಲ್ಲಿ 1792ರಲ್ಲಿ ಅಲೆಕ್ಸಾಂಡರ್ ರೀಡ್ ಎನ್ನುವವನು ಜಾರಿಗೊಳಿಸಿದನು. ಈ ಪದ್ಧತಿಯನ್ನು ಥಾಮಸ್ ಮನ್ರೊ ಮದರಾಸು ಮತ್ತು ಮೈಸೂರು ಪ್ರಾಂತ್ಯಗಳಲ್ಲಿ 1801ರ ನಂತರ ಜಾರಿಗೊಳಿಸಿದನು. ಈ ಕಾಲಘಟ್ಟದಲ್ಲಿಯೇ ಈ ಪ್ರಾಂತ್ಯಗಳ ಬಹುತೇಕ ಭಾಗಗಳು ಕಂಪನಿಯ ಆಡಳಿತಕ್ಕೆ ಒಳಪಟ್ಟಿದ್ದು ಮುಖ್ಯ ಕಾರಣವಾಗಿತ್ತು. ಈ ಪದ್ಧತಿಯ ಪ್ರಕಾರ ಸರಕಾರ ಮತ್ತು ರೈತನ ನಡುವೆ ನೇರ ಸಂಪರ್ಕವನ್ನು ಕಲ್ಪಿಸಲಾಯಿತು. ಭೂಮಿ ಉಳುಮೆ ಮಾಡುತ್ತಿದ್ದವನನ್ನು ಅದರ ಮಾಲೀಕನೆಂದು ಸರ್ಕಾರ ಮಾನ್ಯಮಾಡಿತು. ಅವನೇ ನೇರವಾಗಿ ತಾನು ಕೃಷಿ ಭೂಮಿಯಲ್ಲಿ ಪಡೆದ ಉತ್ಪನ್ನದ ಶೇಕಡ 50ರಷ್ಟು ಭಾಗವನ್ನು ಕಂದಾಯದ ರೂಪದಲ್ಲಿ ಸರ್ಕಾರಕ್ಕೆ ಸಲ್ಲಿಸಬೇಕಾಯಿತು. ಕಂದಾಯವನ್ನು 30 ವರ್ಷಗಳ ಅವಧಿಗೆ ಎಂದು ನಿರ್ಧರಿಸಲಾಯಿತು. ನಂತರ ಅದನ್ನು ಪರಾಮರ್ಶೆಗೂ ಒಳಪಡಿಸಬಹುದಾಗಿತ್ತು.

ಸಣ್ಣ ರೈತರಿಗೆ ತಮ್ಮ ಅಧೀನದಲ್ಲಿದ್ದ ಭೂಮಿ ಮೇಲಿನ ಹಕ್ಕನ್ನು ನೀಡಿತ್ತಾದರೂ, ಭೂಕಂದಾಯವನ್ನು ಈ ಪದ್ಧತಿಯು ಹೆಚ್ಚಿನ ವಾರ್ಷಿಕ ಮೊತ್ತಕ್ಕೆ ನಿಗದಿಪಡಿಸಿದ್ದರಿಂದ ರೈತರು ಸಂಕಷ್ಟಗಳಿಗೆ ಒಳಗಾದರು. ಕಂದಾಯ ವಸೂಲು ಮಾಡುವ ಅಧಿಕಾರಿಗಳು ನಿರ್ದಾಕ್ಷಣ್ಯವಾಗಿ ಕ್ರಮ ಜರುಗಿಸುತ್ತಿದ್ದರು. ಬೆಳೆಗಳು ಸರಿಯಾಗಿ ಫಸಲು ನೀಡದ ಸಂದರ್ಭದಲ್ಲಿ ರೈತರು ಹಣದ ಲೇವಾದೇವಿಗಾರರಿಂದ (Money Lender) ಸಾಲ ತೆಗೆದುಕೊಂಡು, ಮರುಪಾವತಿಸಲಾಗದೆ ಅವರಿಗಿದ್ದ ಸಣ್ಣ ಪುಟ್ಟ ಜಮೀನನ್ನು ಮಾರಾಟಮಾಡುವಂತಾಯಿತು. ರೈತರ ಒಳಿತಿಗಾಗಿ ರೈತವಾರಿ

©KTBS NOT TO BE REPUBLISHED

ಪದ್ಧತಿಯನ್ನು ಜಾರಿಗೊಳಿಸಲಾಗಿದೆ ಎಂದು ಬ್ರಿಟಿಷ್ ಸರ್ಕಾರ ಹೇಳಿದರೂ, ಗರಿಷ್ಠ ಪ್ರಮಾಣದ ರೈತರು ಸಾಲದ ಸುಳಿಗೆ ಸಿಲುಕಿದ್ದು ಈ ಪದ್ಧತಿಯಿಂದಲೇ ಎನ್ನುವುದು ವಿಪರ್ಯಾಸ.

**ಬ್ರಿಟಿಷರ ಕಂದಾಯ ನೀತಿಯ ಪರಿಣಾಮಗಳು:**

1. ನಿಜವಾದ ರೈತರನ್ನು ಶೋಷಿಸುವ ಹೊಸ ಸಾಮಾಜಿಕ ವರ್ಗವಾದ ಜಮೀನ್ದಾರಿ ಸಮುದಾಯ ಸೃಷ್ಟಿಯಾಯಿತು.
2. ಜಮೀನ್ದಾರರ ಶೋಷಣೆಗೆ ಒಳಗಾದ ರೈತರು ವಿವಿಧ ಬಗೆಯ ಸಂಕಷ್ಟಗಳಿಗೆ ಒಳಗಾದರು. ಕ್ರಮೇಣ ನಿರ್ಗತಿಕರಾದರು.
3. ಭೂಮಿ ಮಾರಾಟದ ವಸ್ತುವಾಯಿತು. ಇದನ್ನು ಪರಭಾರೆ (Mortgage) ಮಾಡಿ ಹಣವನ್ನು ಸಾಲವಾಗಿ ಪಡೆಯಬಹುದಾಗಿತ್ತು.
4. ಅನೇಕ ಜಮೀನ್ದಾರರೂ ಕೂಡ ಕಂದಾಯವನ್ನು ಸಲ್ಲಿಸುವ ಸಲುವಾಗಿ ತಮ್ಮ ಜಮೀನನ್ನು ಪರಭಾರೆ ಮಾಡಿದರು.
5. ಕೃಷಿ ಕ್ಷೇತ್ರವು ವಾಣಿಜ್ಯೀಕರಣಗೊಂಡು, ಇಂಗ್ಲೆಂಡಿನಲ್ಲಾದ ಕೈಗಾರಿಕೀಕರಣದಿಂದ ಅಲ್ಲಿನ ಕೈಗಾರಿಕೆಗಳಿಗೆ ಬೇಡಿದ ಕಚ್ಚಾವಸ್ತುಗಳನ್ನೇ ಬೆಳೆಯಬೇಕಾಯಿತು.
6. ಹಣದ ಲೇವಾದೇವಿಗಾರರು ಬಲಿಷ್ಠರಾಗತೊಡಗಿದರು.

**ಆಧುನಿಕ ಶಿಕ್ಷಣದ ಆರಂಭ**

ಭಾರತೀಯರ ಸಾಂಪ್ರದಾಯಿಕ ಶಿಕ್ಷಣವು ನಿರಂತರವಾಗಿ ಚಾಲ್ತಿಯಲ್ಲಿತ್ತು. ಮಧ್ಯಕಾಲೀನ ಸಂದರ್ಭದಲ್ಲಿ ಮುಸ್ಲಿಂ ರಾಜ್ಯವ್ಯವಸ್ಥೆ ನೆಲೆಗೊಂಡ ನಂತರ ಶಿಕ್ಷಣವನ್ನು ನೀಡುವುದರಲ್ಲಿ ಪಾರಂಪರಿಕ ವಿಧಾನದ ಜೊತೆಗೆ ಕೆಲವು ಬದಲಾವಣೆಗಳು ಉಂಟಾದವು. ಮುಂದೆ ಈ ಕ್ರಮದಲ್ಲಿ ಬದಲಾವಣೆ ಉಂಟಾದದ್ದು 18ನೇ ಶತಮಾನದ ಹೊಸ ಬ್ರಿಟಿಷ್ ಆಡಳಿತದ ಕಾಲಘಟ್ಟದಲ್ಲಿ. ಭಾರತದಲ್ಲಿದ್ದ ಐರೋಪ್ಯ ಮತ್ತು ಆಂಗ್ಲೋ-ಇಂಡಿಯನ್ ಸಮುದಾಯಗಳ ಮಕ್ಕಳಿಗೆ ಹೊಸ ಶಾಲೆಗಳು ಪ್ರಾರಂಭವಾದವು. ಆದರೆ ಈ ಶಿಕ್ಷಣ ಕ್ರಮವು ವಿಸ್ತರಣೆ ಆಗದಿದ್ದುದರಿಂದ ಸ್ಥಳೀಯ ಮಕ್ಕಳಿಗೆ ಯಾವುದೇ ಪ್ರಯೋಜನವಾಗಲಿಲ್ಲ. ಆಧುನಿಕ ಶಿಕ್ಷಣದ ಪ್ರಸಾರಕ್ಕೆ ಉತ್ತೇಜನಕೊಟ್ಟ ಮೊದಲ ಬ್ರಿಟಿಷ್ ಅಧಿಕಾರಿಯೆಂದರೆ ವಾರನ್ ಹೇಸ್ಟಿಂಗ್ಸ್. 1781ರಲ್ಲಿ ಅವನು 'ಕಲ್ಕತ್ತಾ ಮದರಸಾ'ವನ್ನು ಪ್ರಾರಂಭಿಸಿದನು. ಜೊನಾಥನ್ ಡಂಕನ್ ಎಂಬ ಮತ್ತೊಬ್ಬ ಬ್ರಿಟಿಷ್ ವ್ಯಕ್ತಿಯು 1792ರಲ್ಲಿ ಬನಾರಸ್ಸಿನಲ್ಲಿ ಸಂಸ್ಕೃತ ಕಾಲೇಜನ್ನು ಪ್ರಾರಂಭಿಸಿದನು. ಆದರೆ ಬ್ರಿಟಿಷ್ ಶಿಕ್ಷಣದ ವ್ಯಾಪಕ ವಿಸ್ತರಣೆಗೆ ಮೊದಲು ಒತ್ತಾಯಿಸಿದವನು ಚಾರ್ಲ್ಸ್ ಗ್ರಾಂಟ್.

1828ರಲ್ಲಿ ವಿಲಿಯಂ ಬೆಂಟಿಂಕನು ಗವರ್ನರ್ ಜನರಲ್ ಆಗಿ ನೇಮಕಗೊಂಡ ನಂತರ ಬ್ರಿಟಿಷ್ ಶಿಕ್ಷಣದ ವಿಸ್ತರಣೆಗೆ ಮತ್ತಷ್ಟು ವಿಶೇಷ ಪ್ರೋತ್ಸಾಹ ದೊರೆಯಿತು. ಗವರ್ನರ್ ಜನರಲ್‌ನ ಕಾರ್ಯಾಂಗ ಸಭೆಗೆ ಮೆಕಾಲೆಯನ್ನು ಕಾನೂನು ಸದಸ್ಯನನ್ನಾಗಿ ಬೆಂಟಿಂಕ್‌ನು ನೇಮಕ ಮಾಡಿದನು. ಸಾರ್ವಜನಿಕ ಶಿಕ್ಷಣಕ್ಕೆ ಸಂಬಂಧಿಸಿದಂತೆ ನೇಮಕವಾದ ಸಮಿತಿಗೂ ಅಧ್ಯಕ್ಷನನ್ನಾಗಿ ನೇಮಕ ಮಾಡಲಾಯಿತು. 1835 ರಲ್ಲಿ ಇಂಗ್ಲೀಷ್ ಶಿಕ್ಷಣಕ್ಕೆ ಸಂಬಂಧಿಸಿದಂತೆ ಮೆಕಾಲೆಯು ಕೊಟ್ಟ ವರದಿಯೆ ಅಧುನಿಕ ಭಾರತದ ಶಿಕ್ಷಣ ವ್ಯವಸ್ಥೆಗೆ ತಳಹದಿಯಾಯಿತು.ಅವನ ಯೋಜನೆಯ ಪ್ರಮುಖ ಅಂಶವೆಂದರೆ; "ರಕ್ತ ಮಾಂಸಗಳಲ್ಲಿ ಭಾರತೀಯರಾಗಿಯೂ ಅಭಿರುಚಿ, ಅಭಿಪ್ರಾಯ, ನೀತಿ ಮತ್ತು ಬುದ್ಧಿವಂತಿಕೆಯಲ್ಲಿ ಇಂಗ್ಲಿಷರಾಗುವ" ಹೊಸ ಭಾರತೀಯ ವಿದ್ಯಾವಂತ ವರ್ಗವನ್ನು ಸೃಷ್ಟಿ ಮಾಡುವುದು. ಭಾರತದ ವಿದ್ಯಾಭ್ಯಾಸದ ಕ್ರಮದಲ್ಲಿ ಇಂಗ್ಲಿಷ್ ಭಾಷೆಯು ಮಾಧ್ಯಮವಾಗಿ ಬಳಕೆಯಾಗಲು ಪ್ರಾರಂಭವಾದದ್ದೇ 1830ರ ದಶಕದ ನಂತರ.

© KTBS NOT TO BE REPUBLISHED

ನಂತರದ ಪ್ರಮುಖ ಬೆಳವಣಿಗೆಯೆಂದರೆ ಸರ್ ಚಾರ್ಲ್ಸ್ ವುಡ್ಸ್‌ನ (1854) ಆಯೋಗದ ಶಿಫಾರಸ್ಸುಗಳ ಆಧಾರದ ಮೇಲೆ ಅಂದಿನ ಗವರ್ನರ್ ಜನರಲ್ ಆದ ಲಾರ್ಡ್ ಡಾಲ್‌ಹೌಸಿಯು ಕಲ್ಕತ್ತಾ, ಬಾಂಬೆ ಮತ್ತು ಮದರಾಸುಗಳಲ್ಲಿ ನೂತನ ವಿಶ್ವವಿದ್ಯಾನಿಲಯಗಳನ್ನು 1857ರಲ್ಲಿ ಸ್ಥಾಪಿಸಿದನು. ಇಲ್ಲಿಂದ ನಂತರ ಶಿಕ್ಷಣವು ಸಾರ್ವತ್ರೀಕರಣಗೊಳ್ಳತೊಡಗಿತ್ತು.

**ಬ್ರಿಟಿಷ್ ಶಿಕ್ಷಣದ ಪರಿಣಾಮಗಳು**

1. ಭಾರತೀಯರು ಆಧುನಿಕತೆ, ಜಾತ್ಯಾತೀತತೆ, ಪ್ರಜಾಪ್ರಭುತ್ವ, ವೈಜ್ಞಾನಿಕ ಆಲೋಚನಾ ಕ್ರಮದ ಜೊತೆಗೆ ರಾಷ್ಟ್ರೀಯವಾದಿ ದೃಷ್ಟಿಕೋನಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಯಿತು.
2. ಸ್ಥಳೀಯ ಭಾಷೆಗಳು ಮತ್ತು ಸಾಹಿತ್ಯ ರಚನೆಗಳಿಗೆ ಪ್ರೋತ್ಸಾಹ ದೊರೆಯಿತು. ಇದರಿಂದ ವಿದ್ಯಾವಂತ ವರ್ಗದ ಆಲೋಚನಾ ಕ್ರಮದಲ್ಲೂ ಏಕತೆಯ ಸ್ವರೂಪವನ್ನು ಕಾಣುತ್ತೇವೆ.
3. ವೃತ್ತ ಪತ್ರಿಕೆಗಳು ಹುಟ್ಟಿ ಬೆಳೆಯತೊಡಗಿದವು. ವಿಶೇಷವಾಗಿ 19ನೇ ಶತಮಾನದ ಉತ್ತರಾರ್ಧದಲ್ಲಿ ಪತ್ರಿಕೆಗಳಲ್ಲಿ ಸರ್ಕಾರದ ನೀತಿಗಳನ್ನು ವಿಮರ್ಶಿಸುವ ಮೂಲಕ ಭಾರತೀಯರಲ್ಲಿ ಬ್ರಿಟಿಷ್ ಆಡಳಿತದ ಬಗ್ಗೆ ವಿಮರ್ಶಾತ್ಮಕ ಅಭಿಪ್ರಾಯ ಬೆಳೆಯಲು ಸಾಧ್ಯವಾಯಿತು.
4. ಹೊಸ ಸಾಮಾಜಿಕ ಮತ್ತು ಧಾರ್ಮಿಕ ಸುಧಾರಣಾ ಚಳವಳಿಗಳು ಹುಟ್ಟಿಕೊಂಡವು.
5. ಜೆ.ಎಸ್.ಮಿಲ್, ರೂಸೋ, ಮಾಂಟೆಸ್ಕ್ಯೂ ಮುಂತಾದವರ ಚಿಂತನೆಗಳು ಭಾರತೀಯ ವಿದ್ಯಾವಂತರ ಆಲೋಚನಾ ಕ್ರಮದಲ್ಲಿ ನಾವಿನ್ಯತೆಯನ್ನು ತಂದವು.
6. ಜಗತ್ತಿನಾದ್ಯಂತ ನಡೆಯುತ್ತಿದ್ದ ಸ್ವಾತಂತ್ರ್ಯ ಚಳವಳಿಗಳ ಪ್ರಭಾವ ಭಾರತೀಯರ ಮೇಲೂ ಆಯಿತು.
7. ಭಾರತೀಯರು ತಮ್ಮ ಸಮೃದ್ಧ ಸಾಂಸ್ಕೃತಿಕ ಪರಂಪರೆಗಳನ್ನು ಅರಿತುಕೊಳ್ಳಲು ಸಾಧ್ಯವಾಯಿತು.

ಹೀಗೆ ಭಾರತದಲ್ಲಿ ಜಾರಿಗೊಂಡ ಪಾಶ್ಚಾತ್ಯ ವಿದ್ಯಾಭ್ಯಾಸದ ಕ್ರಮದಿಂದ ಸೃಷ್ಟಿಯಾದ ಅಭಿರುಚಿ ಮತ್ತು ಆಲೋಚನೆಗಳು ಭಾರತದಲ್ಲಿ ಹೊಸ ಹೊಸ ತಲೆಮಾರುಗಳನ್ನು ಸೃಷ್ಟಿಸುತ್ತಾ ಹೋಯಿತು.

NOT TO BE REPUBLISHED @KTBS

## ಸಂವಿಧಾನಾತ್ಮಕ ಬೆಳವಣಿಗೆ

ಭಾರತದಲ್ಲಿ ಬ್ರಿಟಿಷ್ ಆಡಳಿತ ಬೆಳೆದಂತೆ ಸಮಸ್ಯೆಗಳೂ ಕೂಡ ಬೆಳೆದವು. ಸಮಸ್ಯೆಗಳ ನಿವಾರಣೆಗಾಗಿ ಆಡಳಿತ ಕ್ಷೇತ್ರದಲ್ಲಿ ಸುಧಾರಣೆ ತರುವ ಅಗತ್ಯತೆಯೂ ಇತ್ತು. ಈ ಸುಧಾರಣೆಗಳು ಭಾರತೀಯರ ಬೇಡಿಕೆಗಳಿಗೆ ಸ್ಪಂದಿಸುವಂತಿರಬೇಕಿತ್ತು. ಆಗ ಬ್ರಿಟಿಷರು ಕಾಲಕಾಲಕ್ಕೆ ವಿವಿಧ ನಿಯಮಗಳನ್ನು ಕಾಯ್ದೆಯ ರೂಪದಲ್ಲಿ ಜಾರಿಗೆ ತರುವ ಪ್ರಯತ್ನ ನಡೆಸಿದರು. ಈ ರೀತಿಯ ಕಾಯ್ದೆಗಳು ಭಾರತದ ಸಾಂವಿಧಾನಿಕ ಬೆಳವಣಿಗೆಗೆ ಸಹಕಾರಿಯಾದವು. ಈ ಕಾಯ್ದೆಗಳಲ್ಲಿ ಕೆಲವನ್ನು ತಿಳಿಯೋಣ.

**ಈಸ್ಟ್ ಇಂಡಿಯಾ ಕಂಪನಿ ಆಳ್ವಿಕೆಯ ಅವಧಿಯಲ್ಲಿ ಜಾರಿಗೊಂಡ ಕಾಯ್ದೆಗಳು (1773–1858)**

### 1773ರ ರೆಗ್ಯುಲೇಟಿಂಗ್ ಕಾಯ್ದೆ

1765ರಲ್ಲಿ ಜಾರಿಗೊಂಡ ದಿವಾನಿ ಹಕ್ಕಿನ ನಂತರ ಕಂಪನಿ ಅಧಿಕಾರಿಗಳು ಅಪರಿಮಿತ ದುರಾಸೆಗೆ ಒಳಗಾಗಿ ಅಧಿಕಾರವನ್ನು ತಮ್ಮ ವೈಯಕ್ತಿಕ ಶ್ರೀಮಂತಿಕೆಯನ್ನು ಹೆಚ್ಚುಪಡಿಸಿಕೊಳ್ಳಲು ಬಳಸಿಕೊಂಡರು.

ಭ್ರಷ್ಟಾಚಾರ ವಿಪರೀತವಾಯಿತು. ಇಂಗ್ಲೆಂಡಿನ ಶಾಸನ ಸಭೆಯ ಸದಸ್ಯನಾದ ಎಡ್ಮಂಡ್ ಬರ್ಕ್‌ನು ವಾರ್ಷಿಕವಾಗಿ ಈಸ್ಟ್ ಇಂಡಿಯಾ ಕಂಪನಿಯಿಂದ ಬ್ರಿಟಿಷ್ ಸರ್ಕಾರ ಪಡೆಯುತ್ತಿದ್ದ ತೆರಿಗೆ ಹಣವನ್ನು 'ಅಪರಾಧ ತೆರಿಗೆ' ಎಂದು ತೀಕ್ಷ್ಣವಾಗಿಯೇ ಟೀಕಿಸಿದನು. ಕಂಪನಿ ಅಧಿಕಾರಿಗಳು ಭಾರತದಲ್ಲಿ ನಡೆಸುತ್ತಿರುವ ಅನೈತಿಕ ವ್ಯವಹಾರಗಳು ಗೊತ್ತಿದ್ದರೂ ಯಾವುದೇ ಕ್ರಮವನ್ನು ಜರುಗಿಸದೇ ಸುಮ್ಮನಿದ್ದುದೇ ಅವನು ಹೀಗೆ ಹೇಳಲು ಕಾರಣವಾಗಿತ್ತು. ಇವರು ಸಂಪಾದಿಸಿದ ಹಣದ ಪ್ರಮಾಣ ಎಷ್ಟಿತ್ತೆಂದರೆ ಇಂಗ್ಲೆಂಡಿನ ರಾಜಕೀಯ ವ್ಯವಸ್ಥೆಯನ್ನು ಬುಡಮೇಲು ಮಾಡಬಹುದೆನ್ನುವ ಆತಂಕ ಇಂಗ್ಲೆಂಡಿನಲ್ಲಿ ಅನೇಕರಿಗಿತ್ತು. ಈ ಹಿನ್ನೆಲೆಯಲ್ಲಿ ರೆಗ್ಯುಲೇಟಿಂಗ್ ಕಾಯ್ದೆ 1773ರಲ್ಲಿ ಜಾರಿಗೊಂಡಿತು.

**ಕಾಯ್ದೆಯ ಪ್ರಮುಖ ಲಕ್ಷಣಗಳು**

1. ಈ ಕಾಯ್ದೆಯು ಜಾರಿಗೆ ಬರುವ ಪೂರ್ವದಲ್ಲಿ ಬ್ರಿಟಿಷರ ಅಧೀನದಲ್ಲಿದ್ದ ಪ್ರಾಂತ್ಯಗಳನ್ನು ಮೂರು ಪ್ರೆಸಿಡೆನ್ಸಿಗಳಾಗಿ ವಿಂಗಡಿಸಲಾಗಿತ್ತು. ಅವುಗಳೆಂದರೆ ಬಂಗಾಳ, ಮುಂಬಯಿ ಮತ್ತು ಮದರಾಸು ಪ್ರೆಸಿಡೆನ್ಸಿಗಳು. ಅವುಗಳು ಪ್ರತ್ಯೇಕವಾಗಿಯೂ ಮತ್ತು ಸ್ವತಂತ್ರವಾಗಿಯೂ ಕಾರ್ಯನಿರ್ವಹಿಸುತ್ತಿದ್ದವು. ಈ ಕಾಯ್ದೆಯ ಪ್ರಕಾರ ಬಂಗಾಳದ ಪ್ರೆಸಿಡೆನ್ಸಿಯು ಉಳಿದ ಎರಡು ಪ್ರೆಸಿಡೆನ್ಸಿಗಳ ಮೇಲೆ ಅಧಿಕಾರವನ್ನು ಪಡೆಯಿತು.
2. ಬಂಗಾಳದ ಗವರ್ನರನು ಮೂರು ಪ್ರೆಸಿಡೆನ್ಸಿಗಳಿಗೆ ಗವರ್ನರ್ ಜನರಲ್ ಆದನು.
3. ಗವರ್ನರ್ ಜನರಲ್ಲನಿಗೆ ಬಾಂಬೆ ಮತ್ತು ಮದರಾಸು ಪ್ರೆಸಿಡೆನ್ಸಿಗಳಿಗೆ ನಿರ್ದೇಶಿಸುವ, ನಿಯಂತ್ರಿಸುವ ಮತ್ತು ಮೇಲ್ವಿಚಾರಣೆ ಮಾಡುವ ಅಧಿಕಾರವನ್ನು ಈ ಕಾನೂನು ನೀಡಿತು.
4 ಬಂಗಾಳ ಸರ್ಕಾರದ ಮತ್ತು ಇಂಗ್ಲೆಂಡಿನ ನಿರ್ದೇಶಕ ಮಂಡಳಿಯ (Court of Directors) ಪೂರ್ವಾನುಮತಿಯಿಲ್ಲದೆ ಬಾಂಬೆ ಮತ್ತು ಮದರಾಸು ಸರ್ಕಾರಗಳು ಯಾರ ಮೇಲೂ ಯುದ್ಧ ಘೋಷಿಸುವಂತಿಲ್ಲ ಅಥವಾ ಶಾಂತಿ ಸಂಧಾನವನ್ನು ನಡೆಸುವಂತಿಲ್ಲ. ತೀರ ತುರ್ತಾದ ಸಂದರ್ಭಗಳಲ್ಲಿ ಮಾತ್ರ ಇಂತಹ ನಿಬಂಧನೆಗಳಿಂದ ವಿನಾಯಿತಿ ಇತ್ತು.
5. ಕಲ್ಕತ್ತಾದಲ್ಲಿ ಈ ಕಾಯ್ದೆಯ ಮೇರೆಗೆ "ಸುಪ್ರೀಂಕೋರ್ಟ್" ಅನ್ನು ಸ್ಥಾಪಿಸಲಾಯಿತು. ಈ ಕೇಂದ್ರ ನ್ಯಾಯಾಲಯದಲ್ಲಿ ಒಬ್ಬರು ಮುಖ್ಯ ನ್ಯಾಯಾಧೀಶರು ಮತ್ತು ಮೂರು ಜನ ಸಾಮಾನ್ಯ ನ್ಯಾಯಾಧೀಶರು ಕಾರ್ಯ ನಿರ್ವಹಿಸುತ್ತಿದ್ದರು.

ಹೀಗೆ ರೆಗ್ಯುಲೇಟಿಂಗ್ ಕಾಯ್ದೆ, ತನ್ನ ಹೆಸರೇ ಸೂಚಿಸುವಂತೆ ಕಂಪನಿಯನ್ನು ಒಳಗೊಂಡಂತೆ ಒಟ್ಟಾರೆ ಭಾರತದಲ್ಲಿನ ಬ್ರಿಟಿಷ್ ಆಡಳಿತ ವ್ಯವಸ್ಥೆಯನ್ನು ಇಂಗ್ಲೆಂಡಿನ ಸರ್ಕಾರದ ಅಧೀನಕ್ಕೆ ತರುವ ಬಹುದೊಡ್ಡ ನಿರ್ಣಯವಾಗಿತ್ತು.

**1784ರ ಪಿಟ್ಸ್ ಇಂಡಿಯಾ ಕಾಯ್ದೆ:**

1773ರ ರೆಗ್ಯುಲೇಟಿಂಗ್ ಕಾಯ್ದೆಯಲ್ಲಿ ಕೆಲವು ಅನಿಶ್ಚಿತತೆಗಳು ಇದ್ದವು, ಇವುಗಳನ್ನು ನಿವಾರಿಸುವುದರ ಜೊತೆಗೆ ಬ್ರಿಟಿಷ್ ಸರ್ಕಾರದ ಅಧಿಕಾರವನ್ನು ಮತ್ತು ಕಂಪನಿ ಸರ್ಕಾರಕ್ಕಿದ್ದ ಅಧಿಕಾರದ ಮಿತಿಗಳನ್ನು ಸ್ಪಷ್ಟಪಡಿಸುವುದೇ ಈ ಕಾಯ್ದೆಯ ಪ್ರಮುಖ ಉದ್ದೇಶ. ಇಂಗ್ಲೆಂಡ್‌ನ ಸರ್ಕಾರ ಈ ಕಾಯ್ದೆಯಲ್ಲಿ ಹೊಸ ನಿಬಂಧನೆಗಳನ್ನು ಹೇರುವುದರ ಮೂಲಕ ಭಾರತದಲ್ಲಿ ಕಂಪನಿ ಸರ್ಕಾರವನ್ನು ನಿರ್ಣಾಯಕವಾಗಿ ನಿಯಂತ್ರಿಸಿತು.

© KTBS NOT TO BE REPUBLISHED

ಮತ್ತೊಂದು ಪ್ರಮುಖ ಅಂಶವೆಂದರೆ 'ನಿಯಂತ್ರಣ ಮಂಡಳಿ' (Board of Control) ಎನ್ನುವ ಆರು ಜನ ಕಮಿಷನರ್‌ಗಳನ್ನೊಳಗೊಂಡ ಹೊಸ ಸಂಸ್ಥೆಯನ್ನು ಹುಟ್ಟುಹಾಕಲಾಯಿತು. ಇಲ್ಲಿ ಪ್ರಮುಖವಾಗಿ ಗಮನಿಸಬೇಕಾದ ಅಂಶವೆಂದರೆ ಈ ಹಿಂದೆ ಇದ್ದ 'ನಿರ್ದೇಶನ' ಮಂಡಳಿಯ (Court of Directors) ಜಾಗದಲ್ಲಿ ನಿಯಂತ್ರಣ ಮಂಡಳಿ (Board of Control) ಹುಟ್ಟಿಕೊಂಡಿತು.

ಈ ಮಂಡಳಿಯು ನಾಗರಿಕ, ಮಿಲಿಟರಿ, ಕಂದಾಯದ ವಿಷಯಗಳಲ್ಲಿ ನಿರ್ದೇಶಿಸುವ, ನಿಯಂತ್ರಿಸುವ ಮತ್ತು ಮೇಲ್ವಿಚಾರಣೆ ನಡೆಸುವ ಅಧಿಕಾರವನ್ನು ಪಡೆದಿತ್ತು. ಇಂಗ್ಲೆಂಡಿನಲ್ಲಿ ನಿರ್ದೇಶಕ ಮಂಡಳಿ (Court of Directors) ಮತ್ತು ನಿಯಂತ್ರಣ ಮಂಡಳಿ (Board of Control) ಎರಡೂ ಜಾರಿಯಲ್ಲಿದ್ದವು.

"ಭಾರತೀಯರು ತಮ್ಮ ಸಾರ್ವಭೌಮತ್ವವನ್ನು ಬಿಟಿಷ್ ರಾಜಸತ್ತೆಯ ಹೆಸರಿನಲ್ಲಿ ಪಡೆದಿದ್ದಾರೆಯೇ ವಿನಾ ಅವರದೇ ಸ್ವಂತ ಹಕ್ಕಲ್ಲ" ಎಂದು ಈ ಕಾಯ್ದೆಯಲ್ಲಿ ಹೇಳುವ ಮೂಲಕ ಭಾರತೀಯರ ರಾಜಕೀಯ ಹಕ್ಕುಗಳನ್ನು ನಿರ್ಣಾಯಕವಾಗಿ ಮೊಟಕುಗೊಳಿಸಿತು. ಈ ಕಾಯ್ದೆಯು ಭಾರತದಲ್ಲಿದ್ದ ಕಂಪನಿಯ ಅಧೀನದ ಪ್ರದೇಶ (The British Possessions)ಗಳಿಗೆ ಇಂಗ್ಲೆಂಡಿನ ಸರ್ಕಾರವೇ ಅಂತಿಮ ಸಾರ್ವಭೌಮನೆಂದು ಘೋಷಿಸಿತು.

## ಚಾರ್ಟರ್ ಕಾಯ್ದೆಗಳು

ಚಾರ್ಟರ್ ಕಾಯ್ದೆಗಳ ಪ್ರಮುಖ ಉದ್ದೇಶ ಭಾರತದಲ್ಲಿದ್ದ ಈಸ್ಟ್ ಇಂಡಿಯಾ ಕಂಪನಿಯ ಪರವಾನಗಿ (permit)ಯನ್ನು ವಿಸ್ತರಿಸುವುದು. 1793, 1813, 1833 ಮತ್ತು 1853ರಲ್ಲಿ ಚಾರ್ಟರ್ ಕಾಯ್ದೆಗಳನ್ನು ಜಾರಿಗೆ ತರಲಾಯಿತು. ಪ್ರತೀ 20 ವರ್ಷಕ್ಕೊಮ್ಮೆ ಕಂಪನಿಗೆ ಪರವಾನಗಿಯನ್ನು ನವೀಕರಣ ಮಾಡುವ ಸಂದರ್ಭದಲ್ಲಿ ಇಂಗ್ಲೆಂಡಿನ ಸರ್ಕಾರ ತೆಗೆದುಕೊಂಡ ಹೊಸ ನೀತಿಗಳನ್ನು ಈ ಕಾಯ್ದೆಗಳಲ್ಲಿ ಸೇರಿಸಲಾಯಿತು. ಈ ನಾಲ್ಕು ಕಾಯ್ದೆಗಳಲ್ಲಿ 1813ರ ಮತ್ತು 1833ರ ಕಾಯ್ದೆಗಳು ವಿವಿಧ ಕಾರಣಗಳಿಂದ ಪ್ರಮುಖವಾದವು.

© KTBS NOT TO BE REPUBLISHED

### 1813ರ ಚಾರ್ಟರ್ ಕಾಯ್ದೆ:

1. ಈ ಕಾಯ್ದೆಯು ಈಸ್ಟ್ ಇಂಡಿಯಾ ಕಂಪನಿಗೆ ಮುಂದಿನ 20 ವರ್ಷಗಳು ಭಾರತದಲ್ಲಿರುವ ಅಧಿಕಾರವನ್ನು ನೀಡಿತು. ಈ ಕಾಯ್ದೆಯು ಜಾರಿಗೊಳ್ಳುವ ಪೂರ್ವದಲ್ಲಿ ಭಾರತದಲ್ಲಿ ವ್ಯಾಪಾರ ಮಾಡುವ ಅಧಿಕಾರವನ್ನು ಕಂಪನಿಗೆ ಮಾತ್ರವಲ್ಲದೆ ಇಚ್ಛೆಯುಳ್ಳವರೆಲ್ಲರಿಗೂ ನೀಡಬೇಕೆಂದು ದೊಡ್ಡ ಹೋರಾಟ ನಡೆಯಿತು. ಈ ಹಿನ್ನೆಲೆಯಲ್ಲಿ ಇಚ್ಛೆಯಿದ್ದವರೆಲ್ಲರಿಗೂ ಈ ಕಾಯ್ದೆಯು ಅವಕಾಶವನ್ನು ಮುಕ್ತವಾಗಿಸಿತು. ಇದರ ಪರಿಣಾಮವಾಗಿ ಮುಕ್ತ ವ್ಯಾಪಾರದ ಹೊಸ ಶಕೆ ಆರಂಭಗೊಂಡಿತು.
2. ಅನುಮತಿ ಮತ್ತು ಪರವಾನಿಗೆಯ ಹೊಸ ಕಾಲ ಆರಂಭವಾಯಿತು.
3. ಇನ್ನು ಮುಂದೆ ಗವರ್ನರ್ ಜನರಲ್ ಮತ್ತು ಸೇನೆಯ ಮಹಾಮುಖ್ಯಸ್ಥರನ್ನು (commander-in-chief) ನಿರ್ದೇಶಕ ಮಂಡಳಿಯು ನೇಮಿಸುವ ಅಧಿಕಾರವನ್ನು ಹೊಂದಿತು.
4. ಚರ್ಚ್‌ಗಳಿಗೆ ಭಾರತಕ್ಕೆ ಪ್ರವೇಶಿಸುವ ಅಧಿಕೃತ ಅವಕಾಶವನ್ನು ನೀಡಲಾಯಿತು. ಭಾರತೀಯರಲ್ಲಿ ಹೊಸ ಜ್ಞಾನವನ್ನು ಪಸರಿಸುವ, ಅವರ ನೈತಿಕ ಮತ್ತು ಧಾರ್ಮಿಕ

ಬದುಕನ್ನು ಎತ್ತರಿಸುವ ಜವಾಬ್ದಾರಿಯನ್ನು ಮಿಶನರಿ ಸಂಸ್ಥೆಗಳು ವಹಿಸಿಕೊಳ್ಳಬೇಕು ಎಂಬ ನಿರ್ದೇಶನವನ್ನು ನೀಡಲಾಯಿತು. ಇದರಿಂದ ಹೆಚ್ಚಿನ ಪ್ರಮಾಣದಲ್ಲಿ ಕ್ರೈಸ್ತ ಮಿಷನರಿಗಳು ಭಾರತಕ್ಕೆ ಬರತೊಡಗಿದರು. ಕ್ರೈಸ್ತ ಧರ್ಮದ ಪ್ರಚಾರ ಮತ್ತು ಇಂಗ್ಲಿಷ್ ವಿದ್ಯಾಭ್ಯಾಸದ ವಿಸ್ತರಣೆ ಹೆಚ್ಚಾಯಿತು.

ಈ ಮೇಲಿನ ಕಾರಣಗಳಿಂದ 1813ರ ಚಾರ್ಟರ್ ಕಾಯ್ದೆಯು ಚಾರಿತ್ರಿಕವಾದದ್ದು.

**1833ರ ಚಾರ್ಟರ್ ಕಾಯ್ದೆ:**

ಈ ಕಾಯ್ದೆಯು ಅನುಷ್ಠಾನಕ್ಕೆ ಬರುವ ಪೂರ್ವದಲ್ಲಿ ಭಾರತದ ಒಟ್ಟು ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಉದ್ದೇಶವೂ ಈ ಕಾಯ್ದೆಯ ಅನುಷ್ಠಾನದ ಹಿನ್ನೆಲೆಯಾಗಿತ್ತು. ಈಸ್ಟ್ ಇಂಡಿಯಾ ಕಂಪನಿಗೆ ಮುಂದಿನ 20 ವರ್ಷದ ಪರವಾನಿಗೆಯನ್ನು ನೀಡಲಾಯಿತು. ಈ ಕಾಯ್ದೆಯ ಪ್ರಮುಖ ಅಂಶಗಳೆಂದರೆ;

1. ಬಂಗಾಳದ ಗವರ್ನರ್ ಜನರಲ್‌ನನ್ನು ಭಾರತದ ಗವರ್ನರ್ ಜನರಲ್ ಆಗಿ ನಾಮಕರಣ ಮಾಡಲಾಯಿತು.
2. ಭಾರತದ ಎಲ್ಲ ವ್ಯಾಪಾರಿ ಸರಕುಗಳನ್ನು "ನಿರ್ದೇಶಿಸುವ, ನಿಯಂತ್ರಿಸುವ ಮತ್ತು ಮೇಲ್ವಿಚಾರಣೆ ನಡೆಸುವ" ಅಧಿಕಾರವನ್ನು ಗವರ್ನರ್ ಜನರಲ್‌ನು ಪಡೆದನು.
3. ದೇಶಿ ಸಂಸ್ಥಾನಗಳ ಜೊತೆಗೆ ಯುದ್ಧ, ಶಾಂತಿ ಮತ್ತು ರಾಜತಾಂತ್ರಿಕ ಸಂಬಂಧದ ಎಲ್ಲ ವಿಷಯಗಳನ್ನು ಬಂಗಾಳದ ಕೇಂದ್ರ ಸರ್ಕಾರವೇ ತೀರ್ಮಾನಿಸುವ ಹಕ್ಕನ್ನು ಹೊಂದಿತ್ತು.
4. ಗವರ್ನರ್ ಜನರಲ್‌ನ ಕಾರ್ಯಾಂಗ ಸಭೆಯಲ್ಲಿ ಉಳಿದ ಸದಸ್ಯರ ಜೊತೆ ಗವರ್ನರ್ ಜನರಲ್‌ನಿಗೆ ಯಾವುದಾದರೂ ವಿಷಯದ ಮೇಲೆ ಒಮ್ಮತ ಮೂಡದಿದ್ದಾಗ ಅವನು ಬಹುಮತದ ನಿರ್ಣಯವನ್ನು ತಿರಸ್ಕರಿಸಲು ಇದ್ದ ಕಾರಣಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬೇಕಾಯಿತು.
5. ಧರ್ಮ, ಬಣ್ಣ ಮತ್ತು ಹುಟ್ಟಿನ ಆಧಾರದ ಮೇಲೆ ಯಾವುದೇ ತಾರತಮ್ಯ ಮಾಡುವಂತಿಲ್ಲ ಎನ್ನುವುದನ್ನು ಈ ಕಾಯ್ದೆಯು ನಿರ್ದೇಶಿಸಿತು.
6. ಗವರ್ನರ್ ಜನರಲ್‌ನ ಕಾರ್ಯಾಂಗ ಸಭೆಗೆ ನ್ಯಾಯಾಂಗ ಪರಿಣಿತನನ್ನು ಸದಸ್ಯನನ್ನಾಗಿ ನೇಮಕ ಮಾಡಿಕೊಳ್ಳಬೇಕಾಯಿತು.
7. ಎಲ್ಲ ಬ್ರಿಟಿಷ್ ವ್ಯಾಪಾರಿ ಕಂಪನಿಗಳಿಗೆ ಭಾರತಕ್ಕೆ ಬರಲು ಮುಕ್ತ ಪರವಾನಗಿಯನ್ನು ನೀಡಲಾಯಿತು.

ಈ ಕಾಯ್ದೆಯು 1830ರ ದಶಕದ ಭಾರತದ ಆಂತರಿಕ ಮತ್ತು ಇಂಗ್ಲೆಂಡಿನಲ್ಲಿದ್ದ ವಿವಿಧ ರಾಜಕೀಯ ವಿದ್ಯಮಾನಗಳ ಮೇಲೆ ಬೆಳಕನ್ನು ಚೆಲ್ಲುತ್ತದೆ.

**ಬ) ಬ್ರಿಟಿಷ್ ಸರ್ಕಾರದ ಕಾಯ್ದೆಗಳು (1858–1947)**

ಈಸ್ಟ್ ಇಂಡಿಯಾ ಕಂಪನಿಯ ದುರಾಡಳಿತ ಹಾಗೂ ಭಾರತ ವಿರೋಧಿ ಕಾಯ್ದೆಗಳಿಂದಾಗಿ 1857ರಲ್ಲಿ ಸಿಪಾಯಿ ದಂಗೆ ಸಂಭವಿಸಿತು. ಇದರಿಂದಾಗಿ ಕಂಪನಿಯ ಆಡಳಿತವು ಬ್ರಿಟನ್ ರಾಣಿಗೆ ಹಸ್ತಾಂತರವಾಯಿತು. ಈ ಅವಧಿಯಲ್ಲಿ ಜಾರಿಗೆ ಬಂದ ಪ್ರಮುಖ ಕಾಯ್ದೆಗಳೆಂದರೆ ಭಾರತ ಸರ್ಕಾರದ ಕಾಯ್ದೆ 1858, 1861, 1892, 1909, 1919 ಮತ್ತು 1935ರ ಕಾಯ್ದೆಗಳು. ಭಾರತದಲ್ಲಿ

NOT TO BE REPUBLISHED @KTBS

ವಿವಿಧ ಕಾಲಘಟ್ಟಗಳಲ್ಲಿ ರೂಪತಾಳಿದ ರಾಜಕೀಯ ಬೆಳವಣಿಗೆಗಳ ಹಿನ್ನಲೆಯಲ್ಲಿ ಮೇಲೆ ತಿಳಿಸಿದ ಪ್ರತಿ ಕಾಯ್ದೆಯ ಚಾರಿತ್ರಿಕ ಪ್ರಾಮುಖ್ಯತೆಯನ್ನು ಅರ್ಥೈಸಿಕೊಳ್ಳಬೇಕು.

**ಭಾರತ ಸರ್ಕಾರದ ಕಾಯ್ದೆ – 1858**

ಈ ಕಾಯ್ದೆಯನ್ನು 1857ರ ಸೈನಿಕ ಮತ್ತು ನಾಗರಿಕ ಕ್ರಾಂತಿಯ ಹಿನ್ನಲೆಯಲ್ಲಿ ಅರ್ಥೈಸಿಕೊಳ್ಳಬೇಕು. ಬ್ರಿಟಿಷ್ ಭಾರತವು ಬ್ರಿಟಿಷ್ ಸರ್ಕಾರದ ನೇರ ಆಳ್ವಿಕೆಗೆ ಒಳಪಡುವಂತಾಯಿತು. ನವಂಬರ್ 1, 1858ರಂದು ಬ್ರಿಟಿಷ್ ರಾಣಿ ವಿಕ್ಟೋರಿಯಾ ಒಂದು ಘೋಷಣೆ ಹೊರಡಿಸಿ ತಮ್ಮ ಆಡಳಿತದ ಅವಧಿಯಲ್ಲಿ ಭಾರತದ ಎಲ್ಲ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಲಾಗುವುದೆಂದು ಘೋಷಿಸಿದರು. ಈ ಕಾಯ್ದೆಯ ಪ್ರಮುಖ ಅಂಶಗಳೆಂದರೆ,

1. ಈಸ್ಟ್ ಇಂಡಿಯಾ ಕಂಪನಿಯ ಮಾನ್ಯತೆ ರದ್ದುಗೊಳಿಸಿ, ಭಾರತವನ್ನು ರಾಣಿಯವರ ಆಡಳಿತಕ್ಕೆ ವರ್ಗಾಯಿಸಲಾಯಿತು.

2. ಗವರ್ನರ್ ಜನರಲ್ ಹುದ್ದೆಯ ಪದನಾಮವನ್ನು ಬದಲಾಯಿಸಿ "ವೈಸ್‌ರಾಯ್" ಎಂಬ ಪದನಾಮವನ್ನು ನೀಡಿದರು. ವೈಸರಾಯ್ ಆಗಿ "ಲಾರ್ಡ್ ಕ್ಯಾನಿಂಗ್" ನೇಮಕಗೊಂಡರು.

3. "ಸೆಕ್ರೆಟರಿ ಆಫ್ ಸ್ಟೇಟ್ ಫಾರ್ ಇಂಡಿಯಾ" ಸ್ಥಾನವನ್ನು ಬ್ರಿಟಿಷ್ ಸರ್ಕಾರ ಸೃಷ್ಟಿಸಿತು. ಬ್ರಿಟಿಷ್ ಮಂತ್ರಿ ಮಂಡಲದ ಸದಸ್ಯರಾಗಿದ್ದ ಇವರು ಭಾರತದ ಆಡಳಿತವನ್ನು ನೋಡಿಕೊಳ್ಳುವ ಜವಾಬ್ದಾರಿ ಹೊಂದಿದರು.

4. ಇವರಿಗೆ ಸಹಾಯ ಮಾಡಲು 15 ಸದಸ್ಯರನ್ನೊಳಗೊಂಡ ಭಾರತ ಮಂಡಲಿ (ಕೌನ್ಸಿಲ್ ಆಫ್ ಇಂಡಿಯಾ) ಅಸ್ತಿತ್ವಕ್ಕೆ ಬಂದಿತು.

**1861ರ ಭಾರತೀಯ ಪರಿಷತ್ ಕಾಯ್ದೆ**

ಈ ಕಾಯ್ದೆಯು 1857ರ ಘಟನೆಯ ನಂತರ ಜಾರಿಗೊಂಡ ಪ್ರಮುಖ ಕಾಯ್ದೆಯಾಗಿದೆ. ಈ ಕಾಯ್ದೆಯ ಮೂಲಕ ಭಾರತೀಯರಿಗೆ ಶಾಸನ ರೂಪಿಸುವ ಪ್ರಕ್ರಿಯೆಯಲ್ಲಿ ಸ್ಥಾನವನ್ನು ಕಲ್ಪಿಸಲಾಯಿತು. ಭಾರತೀಯರು ಬ್ರಿಟಿಷರ ಬಗೆಗೆ ತಿಳಿದಿರುವ ಅಭಿಪ್ರಾಯಗಳನ್ನು ತಿಳಿಯಲು ಭಾರತೀಯರಿಗೆ ಪ್ರಾತಿನಿತ್ಯ ನೀಡಲಾಯಿತು. ಇದನ್ನು ಇಂಗ್ಲೀಷಿನಲ್ಲಿ 'Policy of Assertion' ಎಂದು ಕರೆಯುತ್ತಾರೆ.

**ಈ ಕಾಯ್ದೆಯ ಪ್ರಮುಖ ಅಂಶಗಳು**

1. ವೈಸರಾಯ್ ಕೌನ್ಸಿಲ್‌ಗೆ ಭಾರತೀಯರನ್ನು ಅಧಿಕಾರೇತರ ಸದಸ್ಯರಾಗಿ ನಾಮಕರಣ ಮಾಡಲಾಯಿತು.

2. ತುರ್ತು ಸಂದರ್ಭದಲ್ಲಿ ಸುಗ್ರೀವಾಜ್ಞೆ ಹೊರಡಿಸಲು ಅಧಿಕಾರವನ್ನು ಗವರ್ನರ್ ಜನರಲ್‌ಗೆ ನೀಡಲಾಯಿತು.

**1892 ರ ಭಾರತೀಯ ಪರಿಷತ್ ಕಾಯ್ದೆ**

ಈ ಕಾಯ್ದೆಯು 1861 ಕಾಯ್ದೆಯ ಮುಂದುವರಿದ ಕಾಯ್ದೆಯಾಗಿದೆ. 1892ರ ಕಾಯ್ದೆಯು ಭಾರತೀಯರಿಗಿದ್ದ ಶಾಸನ ಸಭೆಗಳ ಪ್ರಾತಿನಿಧ್ಯವನ್ನು ಮತ್ತಷ್ಟು ವಿಸ್ತರಿಸಿತು. ಕಾಂಗ್ರೆಸ್ ಸಂಘಟನೆಯು

©KTBS NOT TO BE REPUBLISHED

ಬ್ರಿಟಿಷರ ಆಡಳಿತದ ಬಗ್ಗೆ ತಳೆದ ವಿಮರ್ಶಾತ್ಮಕ ನಿಲುವಿನ ಹಿನ್ನಲೆಯಲ್ಲಿ ಭಾರತೀಯರ ಪ್ರಾತಿನಿಧ್ಯವನ್ನು ಹೆಚ್ಚಿಸಲಾಯಿತು.

**ಈ ಕಾಯ್ದೆಯ ಪ್ರಮುಖ ಅಂಶಗಳು**

1. ಕೇಂದ್ರ ಹಾಗೂ ಪ್ರಾಂತೀಯ ಶಾಸನ ಸಭೆಗಳಲ್ಲಿ ಹೆಚ್ಚುವರಿ ಸದಸ್ಯರ ಸಂಖ್ಯೆಯನ್ನು ಅಧಿಕಗೊಳಿಸಲಾಯಿತು.

2. ಶಾಸನ ಸಭೆಯ (ಲೆಜಿಸ್ಲೇಟಿವ್ ಕೌನ್ಸಿಲ್) ಅಧಿಕಾರವನ್ನು ಹೆಚ್ಚಿಸಿ ಅವುಗಳಲ್ಲಿ ಬಜೆಟ್ ಬಗ್ಗೆ ಚರ್ಚಿಸುವ ಅಧಿಕಾರವನ್ನು ನೀಡಲಾಯಿತು.

3. ಆರು ದಿನಗಳ ಮುಂಚೆ ಮುನ್ಸೂಚನೆ ನೀಡಿ ಸಾರ್ವಜನಿಕ ಆಸಕ್ತಿಯ ವಿಷಯಗಳ ಬಗ್ಗೆ ಸರಕಾರವನ್ನು ಪ್ರಶ್ನಿಸುವ ಹಕ್ಕನ್ನು ನೀಡಲಾಯಿತು.

**1909 ಭಾರತೀಯ ಪರಿಷತ್ ಕಾಯ್ದೆ**

ಈ ಕಾಯ್ದೆಯನ್ನು 'ಮಿಂಟೋ ಮಾರ್ಲೆ ಸುಧಾರಣಾ ಕಾಯ್ದೆ' ಎಂತಲೂ ಕರೆಯುವರು. ಏಕೆಂದರೆ, ಲಾರ್ಡ್ ಮಿಂಟೋ ಭಾರತದ ವೈಸ್‌ರಾಯ್ ಆಗಿದ್ದರು. ಲಾರ್ಡ್ ಮಾರ್ಲೆ ಭಾರತದ ಸಕ್ರೆಟರಿ ಆಫ್ ಸ್ಟೇಟ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು. ಬ್ರಿಟಿಷರು ಭಾರತೀಯರನ್ನು ಒಡೆದು ಆಳಲು ಈ ಕಾಯ್ದೆಯನ್ನು ಬಳಸಿಕೊಂಡರು.

**ಈ ಕಾಯ್ದೆಯ ಪ್ರಮುಖ ಅಂಶಗಳು**

1. ಕೇಂದ್ರ ಶಾಸನ ಸಭೆಯ ಸದಸ್ಯರ ಸಂಖ್ಯೆಯನ್ನು 16 ರಿಂದ 60ಕ್ಕೆ ಹೆಚ್ಚಿಸಲಾಯಿತು.

2. ಪ್ರಾಂತ್ಯಗಳಲ್ಲೂ ಶಾಸನ ಸಭೆಗಳ ಸದಸ್ಯರ ಸ್ಥಾನಗಳನ್ನು ಹೆಚ್ಚಿಸಲಾಯಿತು.

3. ಮೊದಲ ಬಾರಿಗೆ ಚುನಾವಣೆ ಮೂಲಕ ಶಾಸನ ಸಭೆಗೆ ಆಯ್ಕೆಯಾಗಲು ಅವಕಾಶ ನೀಡಲಾಯಿತು.

4. ಮುಸ್ಲಿಂರಿಗೆ ಪ್ರತ್ಯೇಕ ರಾಜಕೀಯ ಪ್ರಾತಿನಿಧ್ಯ ನೀಡುವ "ಪ್ರತ್ಯೇಕ ಚುನಾವಣಾ ಮತಗಟ್ಟೆ" ವ್ಯವಸ್ಥೆಯನ್ನು ಜಾರಿಗೆ ತರಲಾಯಿತು.

**ಭಾರತ ಸರ್ಕಾರದ ಕಾಯ್ದೆ – 1919**

ಈ ಕಾಯ್ದೆಯನ್ನು ಮಾಂಟೆಗೋ – ಚೆಮ್ಸ್‌ಫರ್ಡ್ ಸುಧಾರಣಾ ಕಾಯ್ದೆ ಎಂತಲೂ ಕರೆಯುವರು. ಮೊದಲನೆಯ ಮಹಾಯುದ್ಧ (1914–1918) ದ ಸಂದರ್ಭದಲ್ಲಿ ಭಾರತೀಯರನ್ನು ಯುದ್ಧದಲ್ಲಿ ಬ್ರಿಟಿಷರ ಪರವಾಗಿ ಭಾಗವಹಿಸಲು ಪ್ರೇರೇಪಿಸಿದ ಹಿನ್ನಲೆಯಲ್ಲಿ ಈ ಕಾಯ್ದೆಯನ್ನು ಜಾರಿಗೆ ತರಲಾಯಿತು. ಸೆಕ್ರೆಟರಿ ಆಫ್ ಸ್ಟೇಟ್ ಆಗಿದ್ದ ಮಾಂಟೆಗೋ ಅವರು ಬ್ರಿಟನ್ನಿನ ಸಂಸತ್ತಿನಲ್ಲಿ 20.8.1917 ರಂದು ಮಾಡಿದ ಘೋಷಣೆಯ ಹಿನ್ನಲೆಯಲ್ಲಿ ಈ ಕಾಯ್ದೆ ರೂಪುಗೊಂಡಿತು. ಮಾಂಟೆಗೋ ಅವರು 'ಭಾರತೀಯರಿಗೆ ಹಂತ ಹಂತವಾಗಿ ಜವಾಬ್ದಾರಿ ಸರಕಾರವನ್ನು ನೀಡುವುದೇ ಬ್ರಿಟಿಷ್ ಸರಕಾರದ ಗುರಿ' ಎಂದು ಘೋಷಿಸಿದರು. ಭಾರತದ ವೈಸರಾಯ್ ಆಗಿದ್ದ ಚೆಮ್ಸ್‌ಫರ್ಡ್ ಅವರೂ ರಾಜಕೀಯ ಸುಧಾರಣೆಗಳಿಗೆ ಧ್ವನಿಗೂಡಿಸಿದರು. ಪರಿಣಾಮವಾಗಿ 1919ರಲ್ಲಿ ಭಾರತೀಯ ಪರಿಷತ್ ಕಾಯ್ದೆ ಜಾರಿಗೆ ಬಂದಿತು.

NOT TO BE REPUBLISHED @KTBS

**ಈ ಕಾಯ್ದೆಯ ಪ್ರಮುಖ ಅಂಶಗಳು**

1. ಕೇಂದ್ರದಲ್ಲಿ ದ್ವಿಸದನ ಶಾಸಕಾಂಗ (Bi-Cameral) ರಚನೆಗೆ ಅವಕಾಶ ನೀಡಲಾಯಿತು. ಅವುಗಳೆಂದರೆ, ಶಾಸಕಾಂಗ ಸಭೆ (ಕೆಳಮನೆ) ಮತ್ತು ರಾಜ್ಯಗಳ ಪರಿಷತ್ತು (ಮೇಲ್ಮನೆ) ರಚಿಸಲಾಯಿತು.

2. ಪ್ರಾಂತ್ಯಗಳಲ್ಲಿ "ದ್ವಿಸರಕಾರ" (Dyarchy) ಪದ್ದತಿಗೆ ಅವಕಾಶ ನೀಡಲಾಯಿತು.

3. ಭಾರತಕ್ಕೆ ಒಬ್ಬ ಹೈಕಮಿಷನರ್‌ರನ್ನು ನೇಮಕ ಮಾಡಲಾಯಿತು.

4. ಸ್ವಯಂ ಆಡಳಿತವುಳ್ಳ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗೆ ಭರವಸೆ ನೀಡಲಾಯಿತು.

5. ಕೇಂದ್ರದ ಬಜೆಟ್‌ನಿಂದ ಪ್ರಾಂತ್ಯಗಳ ಬಜೆಟನ್ನು ಬೇರ್ಪಡಿಸಲಾಯಿತು.

6. "ಪ್ರತ್ಯೇಕ ಚುನಾವಣಾ ಮತಗಟ್ಟೆ" ವ್ಯವಸ್ಥೆಯನ್ನು ಮುಸ್ಲಿಂ, ಸಿಖ್, ಆಂಗ್ಲೋ ಭಾರತೀಯರು ಮತ್ತು ಯುರೋಪಿಯನ್‌ರಿಗೆ ವಿಸ್ತರಿಸಲಾಯಿತು.

**1935ರ ಭಾರತ ಸರ್ಕಾರದ ಕಾಯ್ದೆ**

ಭಾರತದ ಸಂವಿಧಾನ ರಚನೆಗೆ ಈ ಕಾಯ್ದೆಯು ಬುನಾದಿಯಾಗಿದೆ. ಈ ಕಾಯ್ದೆಯು ರೂಪುಗೊಳ್ಳಲು ಮೋತಿಲಾಲ್ ನೆಹರು ಅವರ ಅಧ್ಯಕ್ಷತೆಯಲ್ಲಿ ತಯಾರಾದ 1928ರ ವರದಿಯು ಮುಖ್ಯವಾಗಿದೆ. ಸಂವಿಧಾನದ ಬಹುತೇಕ ಅಂಶಗಳು ಈ ಕಾಯ್ದೆಯನ್ನೇ ಆಧರಿಸಿ ರಚಿಸಲಾಗಿದೆ. ಈ ಕಾಯ್ದೆಯು ಭಾರತಕ್ಕೆ ಸಂಪೂರ್ಣ ಜವಾಬ್ದಾರಿಯುತ ಸರ್ಕಾರ ರಚಿಸಲು ಅವಕಾಶ ನೀಡಿತು. ಇದು ಬ್ರಿಟಿಷ್ ಭಾರತ ಪ್ರಾಂತ್ಯಗಳಿಗೆ ಮಾತ್ರ ಅನ್ವಯವಾಗದೇ ದೇಶಿಯ ಸಂಸ್ಥಾನಗಳಿಗೂ ಅನ್ವಯವಾಗುವ ಅಂಶಗಳನ್ನು ಒಳಗೊಂಡಿದ್ದಿತು.

**ಈ ಕಾಯ್ದೆಯ ಪ್ರಮುಖ ಅಂಶಗಳು**

1. ಬ್ರಿಟಿಷ್ ಪ್ರಾಂತ್ಯಗಳ, ದೇಶಿಯ ಸಂಸ್ಥಾನಗಳು ಹಾಗೂ ಆಶ್ರಿತ ರಾಜರನ್ನೊಳಗೊಂಡ ಅಖಿಲ ಭಾರತ ಒಕ್ಕೂಟವನ್ನು ರಚಿಸಲು ಅವಕಾಶ ನೀಡಿತು.

2. ಕೇಂದ್ರದಲ್ಲಿ "ದ್ವಿ ಸರಕಾರ"ವನ್ನು (Dyarchy) ಸ್ಥಾಪಿಸಲಾಯಿತು.

3. ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪನೆಗೆ ಅವಕಾಶ ನೀಡಿತು.

4. ಪ್ರಾಂತ್ಯಗಳಲ್ಲಿ "ದ್ವಿ ಸರಕಾರ" ಪದ್ಧತಿಯನ್ನು ರದ್ದುಗೊಳಿಸಿ, ಪ್ರಾಂತ್ಯಗಳಿಗೆ ಸ್ವಾಯತ್ತತೆ ನೀಡಲಾಯಿತು.

5. ಭಾರತದಲ್ಲಿ "ಫೆಡರಲ್ ಕೋರ್ಟ್" ಸ್ಥಾಪನೆಗೆ ಅವಕಾಶ ನೀಡಲಾಯಿತು.

ಭಾರತದ ಸಂವಿಧಾನ ಬೆಳವಣಿಗೆಯ ಚರಿತ್ರೆಯನ್ನು ಗುರುತಿಸುವಾಗ ವಿವಿಧ ಕಾಲಘಟ್ಟಗಳಲ್ಲಿ ಆದ ರಾಜಕೀಯ ಬೆಳವಣಿಗೆಗಳು ಕಾಯ್ದೆಯ ರೂಪಗಳಲ್ಲಿ ಪ್ರಕಟವಾಗಿರುವುದನ್ನು ನಾವು ಗ್ರಹಿಸಬೇಕು. ಬ್ರಿಟಿಷ್ ವಸಾಹತುಶಾಹಿ ಭಾರತದಲ್ಲಿ ಆಡಳಿತವನ್ನು ನಡೆಸುತ್ತಿದ್ದ ಸಂದರ್ಭದಲ್ಲಿಯೇ ಈ ಕಾಯ್ದೆಗಳು ಜಾರಿಗೆ ಬಂದದ್ದರಿಂದ ಬ್ರಿಟಿಷರ ಹಿತಾಸಕ್ತಿಗಳು ಈ ಕಾಯ್ದೆಗಳಲ್ಲಿ ಸೇರಿಕೊಂಡಿರುವಂತೆಯೆ ಭಾರತೀಯರು ಬ್ರಿಟಿಷರ ವಿರುದ್ಧ ನಡೆಸಿದ ಹೋರಾಟದ ಆಶೋತ್ತರಗಳ ಸಂಘರ್ಷದ ಫಲಿತಗಳು ಇವುಗಳಲ್ಲಿವೆ ಎಂಬುದನ್ನು ನಾವು ಗಮನಿಸಲೇಬೇಕಾದ ಸಂಗತಿಯಾಗಿದೆ.

© KTBS NOT TO BE REPUBLISHED

## ಅಭ್ಯಾಸಗಳು

**I. ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಉತ್ತರಗಳಿಂದ ಭರ್ತಿಮಾಡಿ.**

1. ದಿವಾನಿ ಅದಾಲತ್ ಎಂಬ ನಾಗರಿಕ ನ್ಯಾಯಾಲಯವನ್ನು ಸ್ಥಾಪಿಸಿದವನು ____________ .
2. ಸೂಪರಿಡೆಂಟೆಂಟ್ ಆಫ್ ಪೊಲೀಸ್ ಹುದ್ದೆಯನ್ನು ಸೃಷ್ಟಿಸಿದವನು ____________ .
3. ಖಾಯಂ ಜಮೀನ್ದಾರಿ ಪದ್ಧತಿಯನ್ನು ಬಂಗಾಳ ಮತ್ತು ಬಿಹಾರ ಪ್ರಾಂತ್ಯಗಳಲ್ಲಿ ________ ರಲ್ಲಿ ಜಾರಿಗೆ ತರಲಾಯಿತು.
4. ಅಲೆಕ್ಸಾಂಡರ್ ರೀಡ್ ಜಾರಿಗೆ ತಂದ ಕಂದಾಯ ಪದ್ಧತಿ ____________ .
5. ಆಧುನಿಕ ಶಿಕ್ಷಣದ ಪ್ರಸಾರಕ್ಕೆ ಉತ್ತೇಜನ ನೀಡಿದ ಮೊದಲ ಬ್ರಿಟಿಷ್ ಅಧಿಕಾರಿ ________ .
6. ರೆಗ್ಯುಲೇಟಿಂಗ್ ಕಾಯ್ದೆ ___________ ರಲ್ಲಿ ಜಾರಿಗೆ ಬಂದಿತು.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿ.**

1. ಈಸ್ಟ್ ಇಂಡಿಯಾ ಕಂಪನಿ ಮೂಲಕ ದೇಶದಲ್ಲಿ ಬ್ರಿಟಿಷರು ರೂಪಿಸಿದ ನ್ಯಾಯಾಂಗ ವ್ಯವಸ್ಥೆಯನ್ನು ವಿಶ್ಲೇಷಿಸಿರಿ.
2. ಬ್ರಿಟಿಷ್‌ರ ಕಾಲದಲ್ಲಿ ಪೊಲೀಸ್ ವ್ಯವಸ್ಥೆಯಲ್ಲಿ ತಂದಂತಹ ಸುಧಾರಣೆಗಳಾವುವು?
3. ಖಾಯಂ ಜಮೀನ್ದಾರಿ ಪದ್ಧತಿಯು ರೈತರನ್ನು 'ಸಾಲದಲ್ಲೇ ಹುಟ್ಟಿ, ಸಾಲದಲ್ಲೇ ಬದುಕಿ, ಸಾಲದಲ್ಲೇ ಸಾಯುವಂತೆ' ಮಾಡಿತು. ಹೇಗೆ? ವಿಮರ್ಶಿಸಿ.
4. ರೈತವಾರಿ ಪದ್ಧತಿಯು ಒಳಗೊಂಡಿದ್ದ ಪ್ರಮುಖಾಂಶಗಳು ಯಾವುವು?
5. ಬ್ರಿಟಿಷರ ಕಂದಾಯ ನೀತಿಗಳಿಂದ ಉಂಟಾದ ಪರಿಣಾಮಗಳಾವುವು?
6. ಬ್ರಿಟಿಷ್ ಶಿಕ್ಷಣದಿಂದ ಉಂಟಾದ ಪರಿಣಾಮಗಳ ಪಟ್ಟಿ ಮಾಡಿ.
7. ರೆಗ್ಯುಲೇಟಿಂಗ್ ಕಾಯ್ದೆ ಹೊಂದಿದ್ದ ನಿಬಂಧನೆಗಳಾವುವು?
8. 1858ರ ಭಾರತ ಸರ್ಕಾರದ ಕಾಯ್ದೆಯ ಪ್ರಮುಖ ಅಂಶಗಳು ಯಾವುವು?
9. 1935ರ ಭಾರತ ಸರ್ಕಾರದ ಕಾಯ್ದೆ 'ಭಾರತ ಸಂವಿಧಾನದ ಬುನಾದಿ' ಸಮರ್ಥಿಸಿ.
10. 1919ರ ಕಾಯ್ದೆಯ ಪ್ರಮುಖಾಂಶಗಳು ಯಾವುವು?

NOT TO BE REPUBLISHED @KTBS

## III. ಚಟುವಟಿಕೆಗಳು :

1. ಬ್ರಿಟಿಷರು ಆಡಳಿತದಲ್ಲಿ ಸುಧಾರಣೆ ತರುವ ಮೂಲಕ ತಮಗೆ ಪೂರಕವಾದ ವಾತಾವರಣ ಸೃಷ್ಟಿಸಿಕೊಂಡರು. ಈ ವಿಷಯದ ಬಗ್ಗೆ ಚರ್ಚಾ ಸ್ಪರ್ಧೆ ನಡೆಸಿ.

2. ಶಿಕ್ಷಕರ ನೆರವಿನೊಂದಿಗೆ ಈ ಪಾಠದಲ್ಲಿ ಪ್ರಸ್ತಾಪಿಸಿರುವ ಕಾಯ್ದೆಗಳಲ್ಲದೆ ಇನ್ನೂ ಬ್ರಿಟಿಷರು ಜಾರಿಗೆ ತಂದ ಕಾಯ್ದೆಗಳು ಒಳಗೊಂಡಿರುವ ಮಾಹಿತಿಗಳನ್ನು ಸಂಗ್ರಹಿಸಿ.

* * * *

@KTBS
NOT TO BE REPUBLISHED

## ಅಧ್ಯಾಯ-4

# ಕರ್ನಾಟಕದಲ್ಲಿ ಬ್ರಿಟಿಷ್ ಆಳ್ವಿಕೆಗೆ ಪ್ರತಿರೋಧಗಳು ಹಾಗೂ ಮೈಸೂರಿನ ಒಡೆಯರು

C2H4A1

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಮೈಸೂರಿನ ಒಡೆಯರ್
- ಹೈದರಾಲಿ ಮತ್ತು ಟಿಪ್ಪುಸುಲ್ತಾನ್
- ಆಂಗ್ಲೋ-ಮೈಸೂರು ಯುದ್ಧಗಳು
- ಪ್ರಮುಖ ಒಡೆಯರ್‌ಗಳು
- ದೊಂಡಿಯಾವಾಘ್
- ಕಿತ್ತೂರಿನ ಬಂಡಾಯ – ರಾಣಿ ಚೆನ್ನಮ್ಮ ಮತ್ತು ಸಂಗೊಳ್ಳಿ ರಾಯಣ್ಣ
- ಅಮರ ಸುಳ್ಯ ಬಂಡಾಯ
- ಸುರಪುರ ಬಂಡಾಯ
- ಹಲಗಲಿ ಬೇಡರ ದಂಗೆ

© KTBS NOT TO BE REPUBLISHED

ಇಂದಿನ ಕರ್ನಾಟಕವು ಏಕೀಕರಣದ ಪೂರ್ವದಲ್ಲಿ ವಿವಿಧ ರಾಜಕೀಯ ಅಧಿಕಾರಶಾಹಿಗಳಲ್ಲಿ ಹಂಚಿ ಹೋಗಿತ್ತು. 18ನೇ ಶತಮಾನದ ಉತ್ತರಾರ್ಧದಲ್ಲಿ ಬ್ರಿಟಿಷರು ರಾಜಕೀಯ ಅಧಿಪತ್ಯವನ್ನು ಸಾಧಿಸುವ ಜೊತೆಜೊತೆಯಲ್ಲಿ ವ್ಯಾಪಾರ ಮತ್ತು ಕೃಷಿ ಕ್ಷೇತ್ರಗಳಲ್ಲಿ ಜನರನ್ನು ತಮ್ಮ ಹಿತಾಸಕ್ತಿಗಳಿಗಾಗಿ ಶೋಷಿಸಲು ತೊಡಗಿದರು. ಈ ಶೋಷಣೆಗಳು ಕರ್ನಾಟಕವೂ ಸೇರಿದಂತೆ ವಿವಿಧ ಭಾಗಗಳಲ್ಲಿ ಅಸ್ಥಿರತೆಯನ್ನು ಸೃಷ್ಟಿಸಿದವು. ದೇಶೀ ರಾಜರು ರಾಜಕೀಯ ಅಸ್ಥಿರತೆಯನ್ನು ಅನುಭವಿಸತೊಡಗಿದರು. ಇದರಿಂದ ಕರ್ನಾಟಕದ ಬಹುತೇಕ ಭಾಗಗಳು ಬ್ರಿಟಿಷರ ವಿರುದ್ಧ ಬಂಡೇಳಲು ಆರಂಭಿಸಿದವು. ಹೀಗಾಗಿ ಆರಂಭದಲ್ಲಿ ಜಮೀನ್ದಾರರು, ಸಂಸ್ಥಾನದ ರಾಜರು ಮುಂತಾದವರು ತಮ್ಮಲ್ಲಿಯ ಯಾವುದೇ ಐಕ್ಯತೆಯನ್ನು ಸಾಧಿಸಲು ಪ್ರಯತ್ನಿಸದೆ ಒಬ್ಬೊಬ್ಬರಾಗಿಯೆ ವಿಘಟಿತ ರೂಪದಲ್ಲಿ ಬ್ರಿಟಿಷರ ವಿರುದ್ಧ ಬಂಡೇಳುವ ಪ್ರಯತ್ನ ಮಾಡಿದರು.

## ಮೈಸೂರಿನ ಒಡೆಯರು (1399–1947)

ವಿಜಯನಗರ ಸಾಮ್ರಾಜ್ಯದ ಪತನಾನಂತರ ತಲೆ ಎತ್ತಿ ಅದರ ಸಂಪ್ರದಾಯಗಳನ್ನು ಮುಂದುವರಿಸಿ, ಕಳೆದುಹೋದ ಕರ್ನಾಟಕದ ಘನತೆಯನ್ನು ಸ್ಥಾಪಿಸಿದ ರಾಜ್ಯವೇ ಮೈಸೂರು. ಮೈಸೂರು ನಗರದ ಬಳಿಯ ಹದಿನಾಡು ಎಂಬ ಪಾಳೆಯಪಟ್ಟಿನಲ್ಲಿ ಶ್ರೀರಂಗಪಟ್ಟಣದ ಮಾಂಡಲಿಕನಿಗೆ ಅಧೀನನಾಗಿ ಚಾಮರಾಜ ಎಂಬುವನು ಆಳುತ್ತಿದ್ದನು. ಗಂಡು ಮಕ್ಕಳಿಲ್ಲದ ಇವನ ಕಾಲಾನಂತರ ಅವನ ದಳವಾಯಿ ಕಾರುಗಳ್ಳಿಯ ಮಾರನಾಯಕನು ರಾಜ್ಯಾಡಳಿತ ಮಾಡುತ್ತಿದ್ದು, ರಾಜಕುಮಾರಿಯನ್ನು ತನಗೆ ವಿವಾಹ ಮಾಡಿಕೊಡಬೇಕೆಂದು ಒತ್ತಾಯ ಮಾಡಿದನು. ಆದರೆ ಇದಕ್ಕೆ ಯಾರೂ ಒಪ್ಪಿಗೆ ನೀಡಲಿಲ್ಲ.

ಇದೇ ವೇಳೆಗೆ ಗುಜರಾತಿನ ದ್ವಾರಕೆಯಿಂದ ಯದುರಾಯನು ತನ್ನ ತಮ್ಮ ಕೃಷ್ಣರಾಯನೊಂದಿಗೆ ಮೈಸೂರಿಗೆ ಬಂದನು. ತಾನಾಗಿಯೇ ಮುಂದೆ ಬಂದು ರಾಣಿಗೆ ಸಹಾಯ ಮಾಡಲು ಒಪ್ಪಿ ಮಾರನಾಯಕನನ್ನು ಕೊಂದನು. ಇದರಿಂದ ಸಂತೋಷಗೊಂಡ ರಾಣಿಯು ತನ್ನ ಮಗಳನ್ನು ಯದುರಾಯರಿಗೆ ವಿವಾಹ ಮಾಡಿಕೊಟ್ಟು ರಾಜ್ಯವನ್ನು ನೀಡಿದಾಗ ಒಡೆಯರ ವಂಶವು ಸ್ಥಾಪನೆ ಆಯಿತು. ಇದನ್ನು ಯದುರಾಯರಿಂದ

ಜಯಚಾಮರಾಜ ಒಡೆಯರ್‌ವರೆಗೆ 25 ಅರಸರುಗಳು ಆಳಿದರು. ಅವರಲ್ಲಿ ಕೆಲವು ಮುಖ್ಯರಾದವರನ್ನು ತಿಳಿಯೋಣ.

**ರಾಜ ಒಡೆಯರು (1578–1617) :** ಸಣ್ಣ ಪಾಳೆಯಪಟ್ಟಾಗಿದ್ದ ಮೈಸೂರನ್ನು ಸಾಕಷ್ಟು ದೊಡ್ಡ ರಾಜ್ಯವನ್ನಾಗಿ ಮಾಡಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಶ್ರೀರಂಗಪಟ್ಟಣವನ್ನು ವಿಜಯನಗರದ ರಾಜ ಪ್ರತಿನಿಧಿಯಿಂದ ವಶಪಡಿಸಿಕೊಂಡು ರಾಜಧಾನಿಯನ್ನಾಗಿ ಮಾಡಿದರು. ಸುತ್ತಮುತ್ತಲಿನ ಅನೇಕ ಪ್ರದೇಶಗಳನ್ನು ವಶಪಡಿಸಿಕೊಂಡು ತನ್ನ ರಾಜ್ಯ ವಿಸ್ತರಿಸಿದರು.

ಶ್ರೀರಂಗಪಟ್ಟಣ, ಮೈಸೂರು ಮೇಲುಕೋಟೆಗಳ ದೇವಾಲಯಗಳ ಜೀರ್ಣೋದ್ಧಾರಕ್ಕೆ ಸೂಕ್ತವಾದ ಏರ್ಪಾಡು ಮಾಡಿದರು. ರಾಜಮುಡಿ ಎಂಬ ಕಿರೀಟವನ್ನು ಮೇಲುಕೋಟೆ ಚೆಲುವನಾರಾಯಣ ಸ್ವಾಮಿಗೆ ಅರ್ಪಿಸಿದರು. ಮೈಸೂರಿನಲ್ಲಿ ನವರಾತ್ರಿ ಉತ್ಸವ ಪ್ರಾರಂಭಿಸಿದರು.


**ಚಿಕ್ಕದೇವರಾಜ ಒಡೆಯರು (1673–1704) :** ಇವರು ಸಮರ್ಥಯೋಧರೂ ಹಾಗೂ ಆಡಳಿತಗಾರರೂ ಆಗಿದ್ದರು. ಶಿವಾಜಿಯ ಸೇನೆಯನ್ನು ಮಧುರೆ, ಇಕ್ಕೇರಿ ಮತ್ತು ಬಿಜಾಪುರಗಳಲ್ಲಿ ಹಿಮ್ಮೆಟಿಸಿದರು. ಮಾಗಡಿ, ಮಧುಗಿರಿ, ಕೊರಟಗೆರೆ ಮತ್ತಿತರ ಪ್ರಾಂತ್ಯಗಳನ್ನು ವಶಪಡಿಸಿಕೊಂಡರು. ಬೆಂಗಳೂರನ್ನು ಮೊಗಲರ ಸೇನಾನಿಯಿಂದ ಕೊಂಡುಕೊಂಡರು. ಇವರಿಗೆ ಕರ್ನಾಟಕ ಕವಿಚಕ್ರವರ್ತಿ, ಅಪ್ರತಿಮ ವೀರ, ತೆಂಕಣರಾಜ, ನವಕೋಟಿ ನಾರಾಯಣ ಎಂಬ ಬಿರುದುಗಳಿದ್ದವು. ಆಡಳಿತದಲ್ಲಿ ನೆರವು ನೀಡಲು ಒಂದು ಸಚಿವ ಸಂಪುಟ (ಅಠಾರ ಕಛೇರಿ)ವನ್ನು ನೇಮಕ ಮಾಡಿದ್ದರು. ಅಂಚೆ ವ್ಯವಸ್ಥೆಯು ಇವರ ಕಾಲದಲ್ಲಿ ಜಾರಿಯಾಯಿತು. ಕಾವೇರಿ ನದಿಗೆ ಅಣೆಕಟ್ಟು ಕಟ್ಟಿ ಚಿಕ್ಕದೇವರಾಜ ನಾಲೆ ಮತ್ತು ದೊಡ್ಡ ದೇವರಾಜ ನಾಲೆ ಎಂಬ ಎರಡು ಕಾಲುವೆಗಳನ್ನು ನಿರ್ಮಿಸಿ ಅಧಿಕ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ದೊರೆಯುವಂತೆ ಮಾಡಿದರು. ಅನೇಕ ಕವಿಗಳಿಗೆ ಮತ್ತು ಪಂಡಿತರಿಗೆ ಆಶ್ರಯ ನೀಡಿದರು. (ತಿರುಮಲಾರ್ಯ, ಸಂಚಿ ಹೊನ್ನಮ್ಮ ಮುಂತಾದವರು)

## ಹೈದರಾಲಿ ಮತ್ತು ಟಿಪ್ಪುಸುಲ್ತಾನ

ಭಾರತದ ಚರಿತ್ರೆಯಲ್ಲಿ 18ನೇ ಶತಮಾನ 'ರಾಜಕೀಯ ಸಮಸ್ಯೆಗಳ ಶತಮಾನ'ವೆಂದೇ ಚಿತ್ರಿಸಲ್ಪಟ್ಟಿದೆ. ಇದಕ್ಕೆ ಅನೇಕ ಕಾರಣಗಳಿವೆ. ಮೊಘಲ್ ಚಕ್ರವರ್ತಿ ಔರಂಗಜೇಬ್‌ನ ಮರಣ 1707ರಲ್ಲಿ ಸಂಭವಿಸಿದ್ದು ಇದಕ್ಕೆ ಪ್ರಮುಖ ಕಾರಣವಾಗಿದೆ. ಆತನ ಮರಣ ಮೊಘಲರ ರಾಜಕೀಯ ಸಾರ್ವಭೌಮತ್ವವನ್ನು ಕುಗ್ಗಿಸಿತು. ಇದರಿಂದಾಗಿ ದಕ್ಷಿಣ ಭಾರತದಲ್ಲಿ ಮೊಘಲರ ರಾಜಕೀಯ ಹತೋಟಿ ತಪ್ಪಿತು. ಕರ್ನಾಟಿಕ್ ಪ್ರದೇಶದಲ್ಲಿ ಅಧಿಕಾರಕ್ಕಾಗಿ ಕಿತ್ತಾಟಗಳು ಆರಂಭವಾದವು. ಇದಕ್ಕೂ ಮುನ್ನ 1704ರಲ್ಲಿ ಸಂಭವಿಸಿದ ಚಿಕ್ಕದೇವರಾಜ ಒಡೆಯರ ಮರಣ ಮೈಸೂರು ರಾಜ್ಯದ ರಾಜಕೀಯ ಬೆಳವಣಿಗೆಯ ಮೇಲೆ ದುಷ್ಪರಿಣಾಮಗಳನ್ನು ಬೀರಿತು. ಈತನ ಮರಣದಿಂದಾಗಿ ಉತ್ತರಾಧಿಕಾರತ್ವ ಸಮಸ್ಯೆ ಕಂಡುಬಂದಿದ್ದರ ಜೊತೆಗೆ ಆಡಳಿತವೂ ಕುಸಿಯಿತು. ಈ ಬೆಳವಣಿಗೆಗಳು ಆ ಕಾಲದ ಮೈಸೂರಿನ ರಾಜಕೀಯವನ್ನು ಮಸುಕುಗೊಳಿಸಿದವು. ಈ ರೀತಿಯ ಅತಂತ್ರ ಸನ್ನಿವೇಶಗಳ ಹಿನ್ನೆಲೆಯಲ್ಲಿದ್ದ ಮೈಸೂರು ಮತ್ತು ಕರ್ನಾಟಿಕ್ ಪ್ರಾಂತ್ಯಗಳ ಭೂ ಪ್ರದೇಶದಲ್ಲಿ ಹೈದರಾಲಿ ರಾಜಕೀಯ ಪ್ರಾಮುಖ್ಯತೆವನ್ನು ಗಳಿಸಿದನು. ಹೈದರಾಲಿಯು ಬಹುಬೇಗನೆ ಶಸ್ತ್ರಗಳ ಉಪಯೋಗ ಮತ್ತು ಪ್ರಯೋಗಗಳಲ್ಲಿ ಖ್ಯಾತಿಗಳಿಸಿ, ಚುರುಕಿನ ಸೈನಿಕ ಕಾರ್ಯಾಚರಣೆಗಳ ಮೂಲಕ ದಳವಾಯಿಗಳ ಬಲ ಕುಂದಿಸಿ ಅರಸರಾಗಿದ್ದ ಎರಡನೇ ಕೃಷ್ಣರಾಜ ಒಡೆಯರವರನ್ನು ಗೃಹಬಂಧನದಲ್ಲಿರಿಸಿ ಅಧಿಕಾರವನ್ನು ತನ್ನ ಕೈಗೆತ್ತಿಕೊಂಡನು. ಮರಾಠರು, ಹೈದರಾಬಾದಿನ ನಿಜಾಮ ಮತ್ತು ಆರ್ಕಾಟಿನ ನವಾಬರು ತಮ್ಮ ರಾಜಕೀಯ ಅಸ್ತಿತ್ವ ಮತ್ತು ಮೇಲ್ಮೈ ಸಾಧನೆಗಾಗಿ ಹೋರಾಟಗಳಲ್ಲಿ ನಿರತರಾಗಿದ್ದರು. ಈ ಸಂಕ್ರಮಣದ ಸಂದರ್ಭವನ್ನು ತಮ್ಮ ರಾಜಕೀಯ ಪ್ರಾಬಲ್ಯಕ್ಕಾಗಿ ಬ್ರಿಟಿಷರು ಮತ್ತು ಫ್ರೆಂಚರು ಬಳಸಿಕೊಳ್ಳತೊಡಗಿದರು.

NOT TO BE REPUBLISHED @KTBS

## ಆಂಗ್ಲೋ – ಮೈಸೂರು ಯುದ್ಧಗಳು (1767–1799) :


ಹೈದರಾಲಿ

**ಮೊದಲನೆಯ ಆಂಗ್ಲೋ ಮೈಸೂರು ಯುದ್ಧ:** ಕ್ರಿ.ಶ.1767ರಲ್ಲಿ ಪ್ರಾರಂಭವಾದ ಇದು 1769ರಲ್ಲಿ ಅಂತ್ಯಗೊಂಡಿತು. ದಕ್ಷಿಣ ಭಾರತದಲ್ಲಿ ಹೈದರಾಲಿ ಗಳಿಸುತ್ತಿದ್ದ ರಾಜಕೀಯ ಪ್ರಾಬಲ್ಯ ಬ್ರಿಟಿಷರು, ಹೈದರಾಬಾದಿನ ನಿಜಾಮ ಮತ್ತು ಮರಾಠರಲ್ಲಿ ರಾಜಕೀಯ ಅಸಹನೆ ಮೂಡಿಸಿತು. ಹೀಗಾಗಿ ಬ್ರಿಟಿಷರು ತಮ್ಮ ಸಾಮ್ರಾಜ್ಯಷಾಹಿ ಧೋರಣೆಗೆ ಮುಳ್ಳಾಗಿ ಪರಿಣಮಿಸಿದ್ದ ಹೈದರಾಲಿಯನ್ನು ರಾಜಕೀಯವಾಗಿ ಮಣಿಸಲು ಕುತಂತ್ರ ನೀತಿಗಳನ್ನು ಮಾಡಲಾರಂಭಿಸಿದರು. ಮರಾಠರ ದಾಳಿಯಿಂದ ರಾಜಕೀಯ ಮತ್ತು ಆರ್ಥಿಕ ನಷ್ಟವನ್ನು ಅನುಭವಿಸಿದ ಹೈದರಾಲಿ ಮರಾಠರು ಮತ್ತು ನಿಜಾಮನನ್ನು ತನ್ನೆಡೆಗೆ ಸೆಳೆದುಕೊಳ್ಳಲು ಯತ್ನಿಸಿದನಾದರೂ ಈ ಪ್ರಯತ್ನದಲ್ಲಿ ಸ್ವಲ್ಪ ಮಟ್ಟಿಗೆ ಜಯಶೀಲನಾದನು.

ಹೈದರ್ ಆಲಿಯ ವಿರುದ್ಧ ಬ್ರಿಟಿಷರು, ಮರಾಠರು ಮತ್ತು ನಿಜಾಮನೊಂದಿಗೆ ಒಪ್ಪಂದ ಮಾಡಿಕೊಂಡರು. ಇದರನ್ವಯ ತ್ರಿಪಕ್ಷ ಒಕ್ಕೂಟ ರಚಿಸಲ್ಪಟ್ಟಿತು. ಆದರೆ ಹೈದರಾಲಿ ತನ್ನ ಚಾಣಾಕ್ಷ್ಯ ರಾಜಕೀಯ ತಂತ್ರಗಳನ್ನು ಪ್ರಯೋಗಿಸುವ ಮೂಲಕ ತನ್ನ ವಿರುದ್ಧ ರಚನೆಯಾಗಿದ್ದ ಮಿತ್ರಕೂಟವನ್ನು ಒಡೆದು ಮರಾಠರು ಮತ್ತು ನಿಜಾಮನನ್ನು ಬ್ರಿಟಿಷರ ವಿರುದ್ಧ ಎತ್ತಿಕಟ್ಟುವಲ್ಲಿ ಯಶಸ್ವಿಯಾದನು.

ಈ ನಡುವೆ ಆರ್ಕಾಟ್‌ನಲ್ಲಿ ರಾಜಕೀಯ ಸಮಸ್ಯೆಗಳು ಕಂಡುಬಂದವು. 1767ರಲ್ಲಿ ಹೈದರಾಲಿ ಮತ್ತು ನಿಜಾಮ, ಬ್ರಿಟಿಷರ ಆಶ್ರಿತ ದೇಶೀಯ ರಾಜ್ಯವಾಗಿದ್ದ ಆರ್ಕಾಟಿಗೆ ಮುತ್ತಿಗೆ ಹಾಕಿದರು. ಇದರಿಂದಾಗಿ ಯುದ್ಧ ಪ್ರಾರಂಭವಾಯಿತು. ತಿರುಚನಾಪಳ್ಳಿ, ತಿರುವಣ್ಣಾಮಲೈ, ಅಂಬೂರು ಮೊದಲಾದ ಸ್ಥಳಗಳಲ್ಲಿ ಕದನಗಳು ಸಂಭವಿಸಿದವು. ಈ ಸಂದರ್ಭದಲ್ಲಿ ಹೈದರಾಲಿ ಮಿಂಚಿನ ಸೈನಿಕ ಕಾರ್ಯಾಚರಣೆಗಳನ್ನು ನಡೆಸಿದನು. ಬ್ರಿಟಿಷ್ ಸೈನ್ಯ ಅನೇಕ ಸ್ಥಳಗಳನ್ನು ವಶಪಡಿಸಿಕೊಂಡಿತು. ಹೈದರ್ ತಾತ್ಕಾಲಿಕ ಹಿನ್ನೆಡೆ ಅನುಭವಿಸಿದನು. ಮುಂಬಯಿಯ ಬ್ರಿಟಿಷ್ ಸೈನ್ಯ ರಂಗವನ್ನು ಪ್ರವೇಶಿಸಿತು. ಹೈದರ್ ಈ ಯುದ್ಧವನ್ನು ತನ್ನ ಪ್ರತಿಷ್ಠೆಯ ಸಂಕೇತವೆಂದು ಭಾವಿಸಿ ಕಾರ್ಯಾಚರಣೆಯನ್ನು ಮುಂದುವರಿಸಿದನು. 1769ರ ವೇಳೆಗೆ ಆತನ ಸೈನ್ಯ ಮದರಾಸಿನ ಪ್ರಾಂತ್ಯವನ್ನು ತಲುಪಿದ್ದು ಬ್ರಿಟಿಷರಲ್ಲಿ ನಡುಕವನ್ನು ಹುಟ್ಟಿಸಿತು. ಅನಿವಾರ್ಯವಾಗಿ ಬ್ರಿಟಿಷರು ಹೈದರಾಲಿಯೊಂದಿಗೆ ಚರ್ಚೆ ಮತ್ತು ಸಂಧಾನಗಳ ಮೂಲಕ 'ಮದ್ರಾಸ್ ಒಪ್ಪಂದ' ಮಾಡಿಕೊಂಡರು. ಮೊದಲನೇ ಆಂಗ್ಲೋ–ಮೈಸೂರು ಯುದ್ಧ 1769ರಲ್ಲಿ ಸಹಿ ಹಾಕಲ್ಪಟ್ಟ 'ಮದ್ರಾಸ್ ಒಪ್ಪಂದ'ದೊಂದಿಗೆ ಕೊನೆಯಾಯಿತು.

**ಎರಡನೆಯ ಆಂಗ್ಲೋ–ಮೈಸೂರು ಯುದ್ಧ ( 1780– 1784 ) :** ಮದರಾಸು ಒಪ್ಪಂದ ದಕ್ಷಿಣ ಭಾರತದಲ್ಲಿ ತಾತ್ಕಾಲಿಕವಾಗಿ ರಾಜಕೀಯ ಬೆಳವಣಿಗೆಗಳನ್ನು ತಡೆಹಿಡಿದಿತ್ತು. ಆದರೆ ಬ್ರಿಟಿಷರು ಮದ್ರಾಸ್ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಲು ಯತ್ನಿಸಿದರು. ಮರಾಠರು ಮಾಧವರಾಯನ ನೇತೃತ್ವದಲ್ಲಿ ಸೈನ್ಯವನ್ನು ಮುನ್ನಡೆಸಿ ಶ್ರೀರಂಗಪಟ್ಟಣದ ಕಡೆ ನುಗ್ಗಿದಾಗ ಹೈದರ್ ಬ್ರಿಟಿಷರ ಸಹಾಯವನ್ನು ಅಪೇಕ್ಷಿಸಿದನು. ಆದರೆ ಬ್ರಿಟಿಷರು ಇದನ್ನು ತಿರಸ್ಕರಿಸಿ ಮದರಾಸು ಒಪ್ಪಂದಕ್ಕೆ ವಿರುದ್ಧವಾಗಿ ನಡೆದುಕೊಂಡರು. ಮಾಹೆಯು ಫ್ರೆಂಚರ ವಸಾಹತುವಾಗಿದ್ದು, ಹೈದರಾಲಿಯ ನಿಯಂತ್ರಣಕ್ಕೊಳಪಟ್ಟಿತ್ತು. ಬ್ರಿಟಿಷರು ಮಾಹೆಯನ್ನು ವಶಪಡಿಸಿಕೊಂಡಿದ್ದು ಎರಡನೆಯ ಮೈಸೂರು ಯುದ್ಧಕ್ಕೆ ಕಾರಣವಾಯಿತು.

©KTBS NOT TO BE REPUBLISHED

1780ರಲ್ಲಿ ಎರಡನೆಯ ಮೈಸೂರು ಯುದ್ಧ ಪ್ರಾರಂಭವಾಯಿತು. ಯುದ್ಧದ ಪ್ರಾರಂಭದಲ್ಲಿ ಹೈದರ್ ಮುನ್ನಡೆ ಸಾಧಿಸಿದನು. ಕರ್ನಾಟಕ ಪ್ರಾಂತ್ಯದ ಅನೇಕ ಕೋಟೆಗಳನ್ನು ವಶಪಡಿಸಿಕೊಂಡನು. ಕಾಂಚೀಪುರಂ ವಶವಾಯಿತು. ಕೋರಮಂಡಲ ತೀರದವರೆವಿಗೂ ತನ್ನ ಸೈನ್ಯವನ್ನು ಮುನ್ನುಗ್ಗಿಸಿದನು. ಇದು ಮದರಾಸಿನ ಬ್ರಿಟಿಷ್ ಸೈನ್ಯಾಧಿಕಾರಿಗಳಲ್ಲಿ ನಡುಕವನ್ನು ತಂದಿತು. ಹೈದರ್ ಆರ್ಕಾಟಿಗೆ ಮುತ್ತಿಗೆ ಹಾಕಿ ಅದನ್ನು ವಶಪಡಿಸಿಕೊಂಡನು. ಸರ್ ಐರ್‌ಕೂಟ್‌ನ ನೇತೃತ್ವದಲ್ಲಿ ಬ್ರಿಟಿಷರ ಸೈನ್ಯ ಸಜ್ಜುಗೊಂಡಿತು. ಹೈದರ್ ಈ ಅವಧಿಯಲ್ಲಿ ವೆಲ್ಲೂರು ಮತ್ತು ವಾಂಡಿವಾಶ್‌ಗಳನ್ನು ಮುತ್ತುವುದಾಗಿ ಬೆದರಿಸಿದನು. ಹೈದರನ ಸೈನ್ಯವನ್ನು ಸರ್ ಐರ್‌ಕೂಟ್ ಪಾಂಡಿಚೇರಿಯವರೆವಿಗೂ ಹಿಂಬಾಲಿಸಿದನು. ಫ್ರೆಂಚರು ಹೈದರನಿಗೆ ಬ್ರಿಟಿಷರ ವಿರುದ್ಧ ಸಹಕರಿಸಲು ನಿರಾಕರಿಸಿದರು. ಹೈದರ್, ಇದರಿಂದಾಗಿ ಯುದ್ಧಗತಿಯನ್ನು ಬದಲಿಸಿದನು. ಹೈದರ್ ಬ್ರಿಟಿಷರ ಹತೋಟಿಯಲ್ಲಿನ ಪ್ರದೇಶಗಳಿಗೆ ಮುತ್ತಿಗೆ ಹಾಕಿ ಕೊಳ್ಳೆಹೊಡೆದು ಅಪಾರ ಸಂಪತ್ತು ಮತ್ತು ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸಿದನು.

1781ರಲ್ಲಿ ಪೋರ್ಟೋನೋವೆ ಎಂಬಲ್ಲಿ ನಡೆದ ಕದನದಲ್ಲಿ ಹೈದರ್ ಪರಾಭವಗೊಂಡನು. ಇದು ಯುದ್ಧದ ಗತಿಯನ್ನು ಬದಲಾಯಿಸಿತು ಮತ್ತು ಬ್ರಿಟಿಷರಲ್ಲಿ ಸ್ಥೈರ್ಯವನ್ನು ಹೆಚ್ಚಿಸಿತು. ತರುವಾಯ ಪುಲಿಕಾಟ್ ಮತ್ತು ಸೋಲಿಂಗೂರ್‌ಗಳ ಕದನದಲ್ಲಿಯೂ ಆರ್ಥಿಕ ಹಾನಿ ಅನುಭವಿಸಿದನು. ಈ ವೇಳೆಗೆ ಬ್ರಿಟಿಷರು ಸಾಲ್ಬಾಯ್ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ಹೈದರನ ಒಕ್ಕೂಟದಿಂದ ಮರಾಠರು ಹಾಗೂ ನಿಜಾಮನನ್ನು ಸೆಳೆಯುವಲ್ಲಿ ಸಫಲರಾದರು. ಯುದ್ಧದ ಮಧ್ಯದಲ್ಲಿ ಹೈದರಾಲಿ 1782ರಲ್ಲಿ ಅನಾರೋಗ್ಯದಿಂದ ಮೃತನಾದನು. ಆತನ ಮಗ ಟಿಪ್ಪು ಯುದ್ಧವನ್ನು ಮುನ್ನಡೆಸಿದನು.

ಹೈದರನ ಮರಣ ಸಂದರ್ಭದಲ್ಲಿ ಮಲಬಾರ್ ಪ್ರಾಂತ್ಯದಲ್ಲಿ ನಡೆದ ಯುದ್ಧದಲ್ಲಿ ಟಿಪ್ಪು ತೊಡಗಿದ್ದನು. ಟಿಪ್ಪುವಿನ ಅನುಪಸ್ಥಿತಿಯ ಲಾಭ ಪಡೆದ ಬ್ರಿಟಿಷರು ಬಿದನೂರು ಮತ್ತು ಮಂಗಳೂರನ್ನು ವಶಪಡಿಸಿಕೊಳ್ಳಲು ಹವಣಿಸಿದರು. ತಿರುವಾಂಕೂರು, ಕಲ್ಲಿಕೋಟೆ ಮತ್ತು ಮಲಬಾರಿನ ಅನೇಕ ರಾಜರುಗಳನ್ನು ಟಿಪ್ಪುವಿನ ವಿರುದ್ಧ ಎತ್ತಿಕಟ್ಟುವ ಪ್ರಯತ್ನಗಳನ್ನು ಅವರು ನಡೆಸಿದರು. ಹೀಗಾಗಿ ಟಿಪ್ಪು ಮಂಗಳೂರು ಮತ್ತು ಕರಾವಳಿ ತೀರಪ್ರದೇಶದ ಮೇಲೆ ಹತೋಟಿ ಸಾಧಿಸುವುದು ಸೂಕ್ತವೆಂದು ಯೋಚಿಸಿ ಮಂಗಳೂರಿನತ್ತ ಮುನ್ನಡೆದು ಬ್ರಿಟಿಷರ ಸೈನ್ಯವನ್ನು ಸೋಲಿಸಿದನು. ಕೊನೆಗೆ 1784ರ 'ಮಂಗಳೂರು ಒಪ್ಪಂದ'ದ ಮೂಲಕ ಎರಡನೆಯ ಆಂಗ್ಲೋ-ಮೈಸೂರು ಯುದ್ಧ ಕೊನೆಗೊಂಡಿತು.



ಟಿಪ್ಪು ಸುಲ್ತಾನ

### ಟಿಪ್ಪು ಸುಲ್ತಾನ

ಬ್ರಿಟಿಷರನ್ನು ತನ್ನ ರಾಜ್ಯ ವಿಸ್ತರಣೆಯ ನೀತಿಗೆ ಅಡ್ಡಪಡಿಸುತ್ತಿರುವ ಶತ್ರುಗಳು ಎಂದು ಭಾವಿಸಿ ಅವರನ್ನು ಓಡಿಸುವ ಗಂಭೀರ ಪ್ರಯತ್ನಗಳನ್ನು ಮಾಡಿದನು. ತಮ್ಮ ಕುಟಿಲ ನೀತಿಯಿಂದ ಭಾರತೀಯ ರಾಜ್ಯಗಳನ್ನು ಕಬಳಿಸುತ್ತಿದ್ದ ಬ್ರಿಟಿಷರನ್ನು ಪರಮ ವೈರಿಗಳು ಎಂದು ತಿಳಿದ ಅವನು ಅವರನ್ನು

©KTBS
NOT TO BE REPUBLISHED

ಭಾರತದಿಂದ ಓಡಿಸುವುದು ತನ್ನ ಆದ್ಯ ಕರ್ತವ್ಯವೆಂದು ತಿಳಿದಿದ್ದನು. ತನ್ನ 17 ವರ್ಷಗಳ ಆಳ್ವಿಕೆಯಲ್ಲಿ ನಿರಂತರವಾಗಿ ಬ್ರಿಟಿಷರೊಂದಿಗೆ ಹೋರಾಡಿದನು. ಅವನು ಬ್ರಿಟಿಷರ ಸಾಮರ್ಥ್ಯ, ತಂತ್ರ, ಕುತಂತ್ರ ಮತ್ತು ಚಾಣಾಕ್ಷ ನೀತಿಗಳನ್ನು ಸ್ಪಷ್ಟವಾಗಿ ಅರ್ಥಮಾಡಿಕೊಂಡಿದ್ದನು. ಬ್ರಿಟಿಷರಿಗೆ ವ್ಯಾಪಾರದಲ್ಲಿ ನಷ್ಟವಾದಲ್ಲಿ ಅದು ಅವರ ರಾಜಕೀಯ ಸ್ವಾಮ್ಯವನ್ನು ಕುಂದಿಸುತ್ತದೆ ಎಂದೂ ಅರಿತಿದ್ದ ಅವನು ಬ್ರಿಟಿಷರನ್ನು ವಿರೋಧಿಸುತ್ತಿದ್ದವರನ್ನು ಸಂಘಟಿಸುವ ಮತ್ತು ಅವರ ನೆರವನ್ನು ಅಪೇಕ್ಷಿಸಲು ಪ್ರಯತ್ನಿಸಿದನು. ಅವರಿಗೆ ವ್ಯಾಪಾರದಲ್ಲಿ ಲಾಭವಾಗದಂತೆ ನೋಡಿಕೊಳ್ಳುವ ಮೂಲಕ ವ್ಯಾಪಾರದ ಮೇಲೆ ಅವರು ಸಾಧಿಸಿದ್ದ ಏಕಸ್ವಾಮ್ಯವನ್ನು ಮುರಿಯುವ ಪ್ರಯತ್ನಗಳನ್ನು ನಡೆಸಿದನು. ಇವು ಬ್ರಿಟಿಷರಲ್ಲಿ ಟಿಪ್ಪುವಿನ ವಿರುದ್ಧ ಮತ್ತಷ್ಟು ದ್ವೇಷ ಭಾವನೆಗಳನ್ನು ಮೂಡಿಸಿದವು.

**ನಿಮಗಿದು ತಿಳಿದಿರಲಿ :**

*18ನೇ ಶತಮಾನದಲ್ಲಿ ಬ್ರಿಟಿಷ್ ಆಳ್ವಿಕೆಯ ವಿಸ್ತರಣೆಯನ್ನು ತಡೆಯಲು ಮಾಡಿದ ಪ್ರಯತ್ನಗಳಿಂದ ಹೈದರಾಲಿ ಮತ್ತು ಟಿಪ್ಪುಸುಲ್ತಾನರು ವಿಭಿನ್ನವಾಗಿ ಕಾಣುತ್ತಾರೆ. ಇವರಿಗೆ ಐರೋಪ್ಯರನ್ನು ಸಾಂಪ್ರದಾಯಿಕ ಶಸ್ತ್ರಾಸ್ತ್ರಗಳಿಂದ ಮಣಿಸಲಾಗುತ್ತದೆ ಎಂಬ ಅರಿವಿತ್ತು. ಫ್ರೆಂಚರ ಸಹಾಯದಿಂದ ಹೈದರಾಲಿ ಸೈನ್ಯವನ್ನು ಆಧುನೀಕರಿಸಲು ಯತ್ನಿಸಿದ್ದ. ಐರೋಪ್ಯ ಸೈನ್ಯದಂತೆ ಶಿಸ್ತಾಗಿ ಕವಾಯತು ಮಾಡುವ ಮತ್ತು ಬಂದೂಕನ್ನು ಬಳಸುವ ಪಡೆಗಳು ಮೈಸೂರಿನ ಸೈನ್ಯದಲ್ಲಿದ್ದವು. ಹೈದರಾಲಿ ಮತ್ತು ಟಿಪ್ಪುಸುಲ್ತಾನರು ಭಾರತದಲ್ಲಿ ಮೊದಲಬಾರಿಗೆ ಯುದ್ಧದಲ್ಲಿ ರಾಕೆಟ್‌ನ್ನು ಬಳಸಿದರು. ಸೈನ್ಯದ ಆಧುನೀಕರಣದ ಜೊತೆಗೆ ತುಂಬಿದ ರಾಜ್ಯದ ಬೊಕ್ಕಸ ಕೂಡಾ ಬ್ರಿಟಿಷರ ಆಕ್ರಮಣದ ತಡೆಗೆ ಅಗತ್ಯವೆನ್ನುವುದನ್ನು ಹೈದರಾಲಿ ಮತ್ತು ಟಿಪ್ಪು ಮನಗಂಡಿದ್ದರು. ಹೈದರಾಲಿಯ ಕಣ್ಣೆದುರಿಗೆ ಕರ್ನಾಟಕ ಪ್ರದೇಶದಲ್ಲಿದ್ದ ನವಾಬರು ದಿವಾಳಿಯಾಗಿದ್ದರು. ಹೈದರಾಲಿ ಮತ್ತು ಟಿಪ್ಪು ಆರ್ಥಿಕ ವ್ಯವಸ್ಥೆಯನ್ನು ಬಲಗೊಳಿಸಲು ಅನೇಕ ನೀತಿ–ನಿಯಮಗಳನ್ನು ರೂಪಿಸಿದ್ದರು. ಶ್ರೀಗಂಧ ಮತ್ತು ತಂಬಾಕು ಮತ್ತಿತರ ಪದಾರ್ಥಗಳನ್ನು ರಾಜ್ಯದ ಏಕಸ್ವಾಮ್ಯದಡಿಗೆ ತಂದಿದ್ದರು. ಫ್ರೆಂಚ್ ತಂತ್ರಜ್ಞರನ್ನು ಕರೆಯಿಸಿ ಮೈಸೂರಿನ ಸಾಂಪ್ರದಾಯಿಕ ಕರಕುಶಲ ವಸ್ತುಗಳ ಗುಣಮಟ್ಟವನ್ನು ಹೆಚ್ಚಿಸಿ ಅಂತಾರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ವ್ಯಾಪಾರ ಚಟುವಟಿಕೆಗಳನ್ನು ವೃದ್ಧಿಸುವ ಯೋಜನೆಯಲ್ಲಿದ್ದರು.*

©KTBS NOT TO BE REPUBLISHED

**ಮೂರನೆಯ ಆಂಗ್ಲೋ–ಮೈಸೂರು ಯುದ್ಧ :** ಈ ಯುದ್ಧಕ್ಕೆ ನೇರ ಕಾರಣ ಯಾವುದೆಂದರೆ ತಿರುವಾಂಕೂರು ರಾಜಕಾರಣಕ್ಕೆ ಸಂಬಂಧಿಸಿದ ಪ್ರಶ್ನೆ. ಆ ರಾಜ್ಯದ ರಾಜ ನೆರೆಯ ಕೊಚ್ಚಿ ಸಂಸ್ಥಾನದಲ್ಲಿ ಬ್ರಿಟಿಷರ ಬೆಂಬಲದಿಂದ ಕೋಟೆಯನ್ನು ನಿರ್ಮಿಸಿದನು ಮತ್ತು ಆತನು ಡಚ್ಚರಿಂದ ಆಯಕೋಟಾ ಮತ್ತು ಕಾಂಗನೂರು ಕೋಟೆಗಳನ್ನು ಪಡೆದುಕೊಂಡಿದ್ದನು. ಇದು ಮಂಗಳೂರು ಒಪ್ಪಂದದ ಷರತ್ತುಗಳ ಉಲ್ಲಂಘನೆಯಾಗಿತ್ತು.

ಬ್ರಿಟಿಷರು ಜನರಲ್ ಮೆಡೋಸನ ನಾಯಕತ್ವದಲ್ಲಿ ಕಾರವಾರ, ಕೊಯಮತ್ತೂರು, ದಿಂಡಿಗಲ್ ಮೊದಲಾದವುಗಳನ್ನು ವಶಪಡಿಸಿಕೊಂಡರು. ಇದಕ್ಕೆ ವಿರುದ್ಧವಾಗಿ ಟಿಪ್ಪು ಬಾರಾಮಹಲ್ ಪ್ರಾಂತ್ಯವನ್ನು ಮುತ್ತಿ ಸತ್ಯಮಂಗಲವನ್ನು ವಶಪಡಿಸಿಕೊಂಡನು. ತಿರುಚನಾಪಳ್ಳಿಯನ್ನು ಮುತ್ತಿ ಅದನ್ನು ವಶಪಡಿಸಿಕೊಳ್ಳುವ ನಿಟ್ಟಿನಲ್ಲಿ ಆತನು ಸೈನಿಕ ಕಾರ್ಯಾಚರಣೆಗಳನ್ನು ನಡೆಸಿದನಾದರೂ ಅದು ಫಲ ನೀಡಲಿಲ್ಲ. ಈ ಸಮಯದಲ್ಲಿ ಲಾರ್ಡ್ ಕಾರ್ನ್‌ವಾಲೀಸ್ ಬ್ರಿಟಿಷ್ ಸೈನ್ಯದ ನಾಯಕತ್ವವನ್ನು ವಹಿಸಿಕೊಂಡನು. ಇದು ಯುದ್ಧದ ಗತಿಯನ್ನು ಬದಲಾಯಿಸಿತು.

ಬ್ರಿಟಿಷ್ ಸೈನ್ಯ ಕಾರ್ನ್‌ವಾಲೀಸನ ನೇತೃತ್ವದಲ್ಲಿ ಕೋಲಾರ ಮತ್ತು ಹೊಸಕೋಟೆಗಳನ್ನು ವಶಪಡಿಸಿಕೊಂಡು ಬೆಂಗಳೂರಿನತ್ತ ಮುನ್ನುಗ್ಗಿತು. ಬೆಂಗಳೂರನ್ನು ವಶಪಡಿಸಿಕೊಂಡು ಕೋಟೆಯನ್ನು ಹಾಳುಗೆಡವಿತು. ಬೆಂಗಳೂರನ್ನು ವಶಪಡಿಸಿಕೊಂಡ ಕಾರ್ನ್‌ವಾಲೀಸ್ ಟಿಪ್ಪುವಿನ ನಿರ್ನಾಮಕ್ಕಾಗಿ ನಿಜಾಮ ಮತ್ತು ಮರಾಠರ ನೆರವನ್ನು ಕೋರಿದನು. ನಿಜಾಮ ಮತ್ತು ಮರಾಠರ ಸಂಘಟಿತ ಸೈನ್ಯ ಬ್ರಿಟಿಷರೊಂದಿಗೆ ಸೇರುವುದರೊಂದಿಗೆ ಯುದ್ಧ ತಿರುವನ್ನು ಪಡೆದುಕೊಂಡಿತು. ಮರಾಠರು ಸವಣೂರು, ಗಜೇಂದ್ರಗಡ, ಲಕ್ಷ್ಮೇಶ್ವರ, ಹುಬ್ಬಳ್ಳಿ ಮೊದಲಾದವುಗಳನ್ನು ವಶಪಡಿಸಿಕೊಂಡರು.

1792ರಲ್ಲಿ ಸಂಘಟಿತ ಸೈನ್ಯ ಒಂದೊಂದಾಗಿ ಕೋಟೆಗಳನ್ನು ವಶಪಡಿಸಿಕೊಂಡು ಶ್ರೀರಂಗಪಟ್ಟಣದ ಕಡೆ ಸಾಗಿತು. ರಾತ್ರಿ ವೇಳೆಯಲ್ಲಿ ಕೋಟೆಯನ್ನು ಹಾಳುಗೆಡವಲಾಯಿತು. ಇದರಿಂದ ವಿಚಲಿತಗೊಂಡ ಟಿಪ್ಪು ಬ್ರಿಟಿಷರೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳಲು ನಿರ್ಧರಿಸಿದನು. ಇದು ಆತನಿಗೆ ಅನಿವಾರ್ಯವೂ ಆಗಿತ್ತು. 1792ರಲ್ಲಿ ಅಸಮಾನ ಷರತ್ತುಗಳನ್ನು ಹೊಂದಿದ್ದ 'ಶ್ರೀರಂಗಪಟ್ಟಣ ಒಪ್ಪಂದ'ಕ್ಕೆ ಟಿಪ್ಪು ಸಹಿಹಾಕುವ ಮೂಲಕ ಯುದ್ಧಕ್ಕೆ ತೆರೆಯಾಯಿತು. ಈ ಒಪ್ಪಂದದನ್ವಯ ಮೂರನೆ ಆಂಗ್ಲೋ-ಮೈಸೂರು ಯುದ್ಧ ಕೊನೆಗೊಂಡಿತು.

ಟಿಪ್ಪುವನ್ನು ಮಣಿಸಲು ಬ್ರಿಟಿಷರು ಶ್ರೀರಂಗಪಟ್ಟಣ ಒಪ್ಪಂದದಲ್ಲಿ ಅಸಮಾನ ಷರತ್ತುಗಳು ಇರುವಂತೆ ನೋಡಿಕೊಂಡರು. ಆ ಷರತ್ತುಗಳು ಯಾವುವೆಂದರೆ; ಟಿಪ್ಪು ತನ್ನ ಅರ್ಧ ರಾಜ್ಯವನ್ನು ಬಿಟ್ಟುಕೊಡುವುದು, ಮೂರು ಕೋಟಿ ರೂಪಾಯಿಗಳನ್ನು ಯುದ್ಧನಷ್ಟ ಭರ್ತಿಯಾಗಿ ಕೊಡುವುದು, ಯುದ್ಧನಷ್ಟ ಭರ್ತಿಗೆ ಗ್ಯಾರಂಟಿಯಾಗಿ ತನ್ನ ಇಬ್ಬರು ಗಂಡು ಮಕ್ಕಳನ್ನು ಒತ್ತೆಯಾಗಿ ನೀಡುವುದು, ಮತ್ತು ಯುದ್ಧದ ಸಂದರ್ಭದಲ್ಲಿ ಸೆರೆ ಹಿಡಿಯಲಾಗಿದ್ದ ಸೈನಿಕರನ್ನು ಬಿಡುಗಡೆಗೊಳಿಸುವುದು. ಇದರನ್ವಯ ಶ್ರೀರಂಗಪಟ್ಟಣದಿಂದ ಬ್ರಿಟಿಷರ ನೇತೃತ್ವದಲ್ಲಿನ ಸಂಘಟಿತ ಸೈನ್ಯ ಹಿಂತೆಗೆಯಿತು.

**ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧ :** ಟಿಪ್ಪು ಮೂರನೆಯ ಆಂಗ್ಲೋ ಮೈಸೂರು ಯುದ್ಧದಲ್ಲಿನ ಸೋಲನ್ನು ವೈಯಕ್ತಿಕವಾಗಿ ಸ್ವೀಕರಿಸಿ ಅದನ್ನು ಒಂದು ಪ್ರಮುಖ ಸವಾಲೆಂದೇ ಪರಿಗಣಿಸಿದನು. ಒಪ್ಪಂದದನ್ವಯ ಬ್ರಿಟಿಷರ ನೇತೃತ್ವದಲ್ಲಿನ ಮಿತ್ರಕೂಟಕ್ಕೆ ನೀಡಬೇಕಾದ ಭೂಪ್ರದೇಶಗಳು ಮತ್ತು ಹಣವನ್ನು ಚಾಚೂ ತಪ್ಪದೆ ಸಲ್ಲಿಸಿ ಒತ್ತೆಯಾಳಾಗಿ ಕಳುಹಿಸಿಕೊಟ್ಟಿದ್ದ ತನ್ನ ಇಬ್ಬರು ಮಕ್ಕಳನ್ನು ಹಿಂದಕ್ಕೆ ಕರೆಯಿಸಿಕೊಂಡನು ಟಿಪ್ಪು ಬ್ರಿಟಿಷರ ಅಧೀನದಲ್ಲಿದ್ದ ಮಲೆಯಾಳಂ ಮಾತನಾಡುವ ಭೂಪ್ರದೇಶಗಳು ನ್ಯಾಯಯುತವಾಗಿ ತನಗೇ ಸೇರಬೇಕೆಂದು ವಾದಿಸಿದನು. ಆದರೆ ಬ್ರಿಟಿಷರು ಅದನ್ನು ಪುಷ್ಟೀಕರಿಸಲಿಲ್ಲ.


ಲಾರ್ಡ್ ವೆಲ್ಲೆಸ್ಲಿ 1798ರಲ್ಲಿ ಭಾರತದ ಗವರ್ನರ್ ಜನರಲ್‌ನಾಗಿ ನೇಮಕಗೊಂಡನು. ಟಿಪ್ಪುವಿನ ವಿರೋಧಿ ರಾಜಕೀಯ ಚಟುವಟಿಕೆಗಳು ಈತನ ಅವಧಿಯಲ್ಲಿ ಚುರುಕುಗೊಂಡವು. ಟಿಪ್ಪು ಭಾರತೀಯ ರಾಜರ ಒಕ್ಕೂಟವನ್ನು ತನ್ನಡೆಗೆ ಸೆಳೆಯಲು ಮಾಡುತ್ತಿದ್ದ ಪ್ರಯತ್ನಗಳು ಹಾಗೂ ತಮ್ಮ ಬದ್ಧ ವೈರಿಗಳಾದ ಫ್ರೆಂಚರೊಂದಿಗೆ ಟಿಪ್ಪು ಹೊಂದಿದ್ದ ಸಂಬಂಧಗಳು ವೆಲ್ಲೆಸ್ಲಿಯಲ್ಲಿ ಟಿಪ್ಪುವಿನ ವಿಚಾರದಲ್ಲಿ ಮತ್ತಷ್ಟು ದ್ವೇಷ ಭಾವನೆಗಳನ್ನು ಬೆಳೆಸಿದವು. ಟಿಪ್ಪು ಬ್ರಿಟಿಷರ ವಿರುದ್ಧವಾಗಿದ್ದ ಫ್ರೆಂಚರ ಸಹಕಾರ ಪಡೆಯಲು ಪ್ರಯತ್ನಿಸಿ ರಾಯಭಾರಿಯನ್ನು ಕಳುಹಿಸಿದ್ದನು. ಇದು ಬ್ರಿಟಿಷರಿಗೆ ಅಸಮಾಧಾನವನ್ನು ತಂದಿತು. ಟಿಪ್ಪು ಮತ್ತು ಫ್ರೆಂಚರ ನಡುವಿನ ಸ್ನೇಹ ಮುಂದಕ್ಕೆ ತಮ್ಮ ಅಧಿಪತ್ಯಕ್ಕೆ ಮುಳುವಾಗಬಹುದೆಂಬ ಭಾವನೆಗಳು ಬ್ರಿಟಿಷರಲ್ಲಿ ಬೆಳೆಯಿತು.

ಹೊಸ ಷರತ್ತಗಳನ್ನು ಒಳಗೊಂಡಿರುವ ಸಹಾಯಕ ಸೈನ್ಯ ಪದ್ಧತಿಯನ್ನು ಟಿಪ್ಪುವಿನ ಮೇಲೆ ಹೇರಲಾಯಿತು. ಆದರೆ ಟಿಪ್ಪು ಅಮಾನವೀಯ ಸಹಾಯಕ ಸೈನ್ಯ ಪದ್ಧತಿ ಮತ್ತು ಅಸಮಾನ ಷರತ್ತುಗಳನ್ನು ಒಳಗೊಂಡಿದ್ದ ಇದನ್ನು ಒಪ್ಪಿಕೊಳ್ಳಲು ನಿರಾಕರಿಸಿದನು. ಇದರಿಂದಾಗಿ ನಾಲ್ಕನೇ ಆಂಗ್ಲೋ-ಮೈಸೂರು ಯುದ್ಧವು ಪ್ರಾರಂಭವಾಯಿತು.

© KTBS NOT TO BE REPUBLISHED

1799ರಲ್ಲಿ ಯುದ್ಧ ಆರಂಭವಾಯಿತು. ಅಭೇದ್ಯವಾದ ಕೋಟೆಯನ್ನು ಬ್ರಿಟಿಷರು ಭೇದಿಸಿದರು. ಎರಡೂ ಸೈನ್ಯಗಳು ವೀರಾವೇಶದಿಂದ ಕಾದಾಡಿದವು. ಟಿಪ್ಪು ತನ್ನ ಸೈನ್ಯವನ್ನು ಹುರಿದುಂಬಿಸುತ್ತ ಹೋರಾಡಿ 1799ರಲ್ಲಿ ಹತನಾದನು. ಆತನ ಮರಣ ಬ್ರಿಟಿಷರಿಗೆ ಇಡೀ ಭಾರತವೇ ತಮ್ಮ ಕೈವಶವಾದ ಸಂತೋಷವನ್ನು ತಂದಿತು. ನಂತರ ಬ್ರಿಟಿಷರು ಆತನ ಹತೋಟಿಯಲ್ಲಿದ್ದ ಭೌಗೋಳಿಕ ಪ್ರದೇಶಗಳನ್ನು ಮರಾಠರು ಮತ್ತು ನಿಜಾಮನೊಂದಿಗೆ ಹಂಚಿಕೊಂಡರು. ಒಂದು ಸಣ್ಣ ಭೌಗೋಳಿಕ ಪ್ರದೇಶವು ಮೈಸೂರು ಒಡೆಯರ ರಾಜವಂಶದ ಪ್ರತಿನಿಧಿಗೆ ವರ್ಗಾಯಿಸಲ್ಪಟ್ಟಿತ್ತು. ಈ ಪ್ರದೇಶ ತರುವಾಯ ಮೈಸೂರು ಸಂಸ್ಥಾನವೆಂದು ಹೆಸರಾಯಿತು.

**ಟಿಪ್ಪು ನಂತರದ ಮೈಸೂರು**




NOT TO BE REPUBLISHED

**ಹತ್ತನೆಯ ಚಾಮರಾಜೇಂದ್ರ ಒಡೆಯರು (1881–1894) :** ಬ್ರಿಟಿಷ್ ಸರಕಾರವು ತನ್ನ ಆಶ್ವಾಸನೆಯಂತೆ 1881ರಲ್ಲಿ ಮೈಸೂರಿನ ಸಿಂಹಾಸನವನ್ನು ಹತ್ತನೆಯ ಚಾಮರಾಜೇಂದ್ರ ಒಡೆಯರಿಗೆ ವಹಿಸಿತು. ಕಮೀಷನರ್ ಆಡಳಿತ ಕೊನೆಗೊಂಡು ರೆಸಿಡೆಂಟ್ ಎಂಬ ಬ್ರಿಟಿಷ್ ಪ್ರತಿನಿಧಿಯನ್ನು ನೇಮಿಸಲಾಯಿತು. ಇವರ ಜೊತೆಗೆ ದಿವಾನರಾಗಿ ಸಿ. ರಂಗಾಚಾರ್ಲುರವರು ನೇಮಿಸಲ್ಪಟ್ಟರು. ಇವರು ಒಳ್ಳೆಯ ಆಡಳಿತಗಾರರೂ, ಉದಾರ ಮನೋಭಾವವುಳ್ಳವರೂ ಆಗಿದ್ದರು. ಅವರು ಮೈಸೂರು ಪ್ರಜಾಪ್ರತಿನಿಧಿ ಸಭೆಯನ್ನು ಪ್ರಾರಂಭಿಸಿದರು. 1881ರಲ್ಲಿ ಕೋಲಾರದ ಚಿನ್ನದಗಣಿ, 1882ರಲ್ಲಿ ಬೆಂಗಳೂರು – ಮೈಸೂರು ರೈಲುಮಾರ್ಗವನ್ನು ಆರಂಭಿಸಿದರು.

1883ರಲ್ಲಿ ರಂಗಾಚಾರ್ಲು ಕಾಲವಾದ ನಂತರ ಕೆ. ಶೇಷಾದ್ರಿ ಅಯ್ಯರ್ ದಿವಾನರಾದರು. ರಾಜ್ಯದ ವಿವಿಧ ಅಧಿಕಾರ ಸ್ಥಾನಗಳಲ್ಲಿ ಕೆಲಸ ಮಾಡಿದ ಇವರಿಗೆ ದೇಶದ ಸಮಸ್ತ ಸಮಸ್ಯೆಗಳ ಅರಿವು ಇದ್ದಿತು. ಅವರು ದೇಶದ ಹಣಕಾಸಿನ ಸ್ಥಿತಿಯನ್ನು ಉತ್ತಮಗೊಳಿಸಿದರು. ಹಲವು ಹೊಸ ರೈಲುಮಾರ್ಗಗಳ ರಚನೆಗೆ ಕಾರಣಕರ್ತರಾದರು. ದೇಶದ ಆಡಳಿತ ಸೇವೆಗಾಗಿ ಪ್ರತಿಭಾವಂತ ಯುವಕರನ್ನು ಆಯ್ಕೆಮಾಡಲು ಮೈಸೂರು

ಸಿವಿಲ್ ಸರ್ವಿಸ್ ಪರೀಕ್ಷೆಯನ್ನು ಆರಂಭಿಸಿದರು. ನೀರಾವರಿ ವ್ಯವಸಾಯಕ್ಕೆ ಹೆಚ್ಚಿನ ಗಮನ ಕೊಟ್ಟರು. ಹೆಣ್ಣುಮಕ್ಕಳ ವಿದ್ಯಾಭ್ಯಾಸಕ್ಕೆ ವಿಶೇಷ ಗಮನ ನೀಡಲು ಮೈಸೂರಿನಲ್ಲಿ ಮಹಾರಾಣಿ ಬಾಲಿಕಾ ಪ್ರೌಢಶಾಲೆಯನ್ನು ಸ್ಥಾಪಿಸಿದರು. ಚಾಮರಾಜೇಂದ್ರ ಒಡೆಯರ್‌ರವರು ಮೈಸೂರಿಗೆ ಬಂದಿದ್ದ ವಿವೇಕಾನಂದರಿಗೆ ಆಶ್ರಯ ನೀಡಿ ಅವರು ಚಿಕಾಗೋ ಸರ್ವಧರ್ಮ ಸಮ್ಮೇಳನಕ್ಕೆ ಹೋಗಲು ಸಹಾಯ ಮಾಡಿದರು. ಇವರು ಸಂಸ್ಕೃತ ಮತ್ತು ಕನ್ನಡ ಪ್ರೇಮಿಗಳಾಗಿದ್ದು ಅನೇಕ ವಿದ್ವಾಂಸರುಗಳಿಗೆ ಆಶ್ರಯ ನೀಡಿದ್ದರು. ಅವರಲ್ಲಿ ಪ್ರಮುಖರಾದವರು ಬಸಪ್ಪಶಾಸ್ತ್ರಿಗಳು. ಅವರು ಅನೇಕ ಕೃತಿಗಳನ್ನು ರಚಿಸಿ "ಅಭಿನವ ಕಾಳಿದಾಸ" ಎನಿಸಿಕೊಂಡರು ಹಾಗೂ ಇವರೇ ಮೈಸೂರು ರಾಜ್ಯಗೀತೆ **"ಕಾಯೋಶ್ರೀ ಗೌರಿ"** ಯನ್ನು ರಚಿಸಿದವರು.

**ನಾಲ್ವಡಿ ಕೃಷ್ಣರಾಜ ಒಡೆಯರು (1894 – 1940) :** ಅವರು ಪ್ರಾಪ್ತ ವಯಸ್ಕರಾಗುವವರೆಗೆ ಅವರ ತಾಯಿ ಮಹಾರಾಣಿ ವಾಣಿವಿಲಾಸ ಸನ್ನಿಧಾನ ಕೆಂಪು ನಂಜಮ್ಮಣ್ಣಿ ಅವರು ರಾಜ ಪ್ರತಿನಿಧಿಯಾಗಿ ಆಡಳಿತ ನಡೆಸಿದರು. ಅವರಿಗೆ ಆಡಳಿತದಲ್ಲಿ ದಿವಾನರು ಮತ್ತು ಅವರ ಸಲಹಾ ಸಮಿತಿ ಸದಸ್ಯರು ನೆರವು ನೀಡಿದರು. ಇದರಿಂದ ಅಭಿವೃದ್ಧಿ ಕಾರ್ಯವು ಹೆಚ್ಚಿತು. ಚಿನ್ನದ ಗಣಿ ಸುಧಾರಣೆ, ಕಾಲೇಜು ಸ್ಥಾಪನೆ, ಮಾರಿಕಣಿವೆ ಜಲಾಶಯ ನಿರ್ಮಾಣ, ರೈಲುಮಾರ್ಗ, ಆಸ್ಪತ್ರೆ ಸ್ಥಾಪನೆ ಹಾಗೂ ಕಾವೇರಿ ಜಲಪಾತವನ್ನು ಉಪಯೋಗಿಸಿಕೊಂಡು ಶಿವನಸಮುದ್ರದಲ್ಲಿ ಜಲವಿದ್ಯುತ್ ಕೇಂದ್ರವನ್ನು ಸ್ಥಾಪಿಸುವ ಕಾರ್ಯಗಳು ಆರಂಭವಾದವು. ಈ ವಿದ್ಯುತ್ ಕೇಂದ್ರದಿಂದ ಕೋಲಾರದ ಚಿನ್ನದ ಗಣಿಗೂ ನಂತರ ಬೆಂಗಳೂರಿಗೂ ವಿದ್ಯುತ್ ಸರಬರಾಜು ಮಾಡಲು ಅನುಕೂಲವಾಯಿತು. ಭಾರತದಲ್ಲಿ ವಿದ್ಯುತ್ ಪಡೆದ ನಗರಗಳಲ್ಲಿ ಬೆಂಗಳೂರೇ ಮೊದಲನೆಯದು.



**ನಾಲ್ವಡಿ ಕೃಷ್ಣರಾಜ ಒಡೆಯರು**

1902ರಲ್ಲಿ ಕೃಷ್ಣರಾಜರು ಅಧಿಕಾರ ವಹಿಸಿಕೊಂಡರು. ಇವರು ಪಿ.ಎನ್. ಕೃಷ್ಣಮೂರ್ತಿ, ವಿ.ಪಿ. ಮಾಧವರಾಯರು, ಸರ್.ಎಂ. ವಿಶ್ವೇಶ್ವರಯ್ಯನವರು, ಕಾಂತರಾಜ ಅರಸ್, ಸರ್ ಆಲ್ಬಿಯನ್ ಬ್ಯಾನರ್ಜಿ, ಸರ್ ಮಿರ್ಜಾ ಇಸ್ಮಾಯಿಲ್ ಮುಂತಾದ ಪ್ರಖ್ಯಾತ ದಿವಾನರುಗಳ ಸೇವೆಯನ್ನು ಪಡೆದ ಅದೃಷ್ಟಶಾಲಿಗಳು.

ಕೃಷ್ಣರಾಜ ಒಡೆಯರು ಪ್ರಜೆಗಳಲ್ಲಿ ವಿದ್ಯಾಭ್ಯಾಸವು ವ್ಯಾಪಕವಾಗಿ ಹರಡಬೇಕೆಂಬ ವಿಷಯದಲ್ಲಿ ತುಂಬಾ ಆಸಕ್ತರಾಗಿದ್ದರು. ಪ್ರಾಥಮಿಕ ಶಿಕ್ಷಣದ ಅಭಿವೃದ್ಧಿಗಾಗಿ ಎಲ್ಲ ಪ್ರಾಥಮಿಕ ಶಾಲೆಗಳಲ್ಲಿಯೂ ಶಿಕ್ಷಣ ಶುಲ್ಕವನ್ನು ರದ್ದು ಮಾಡಲಾಯಿತು. ಹೆಣ್ಣುಮಕ್ಕಳ ವಿದ್ಯಾಭ್ಯಾಸದ ಏಳಿಗೆಗೆ ನೆರವು ಸಿಕ್ಕಿತು. ಮೈಸೂರು ವಿಶ್ವವಿದ್ಯಾನಿಲಯವು ಸ್ಥಾಪಿಸಲ್ಪಟ್ಟಿತು. ವಿದೇಶ ವಿದ್ಯಾಭ್ಯಾಸಕ್ಕೆ ಹೋಗುವವರಿಗೆ ವಿದ್ಯಾರ್ಥಿ ವೇತನ ನೀಡುವ ಪದ್ಧತಿಯನ್ನು ಜಾರಿಗೆ ತರಲಾಯಿತು. ಬೆಂಗಳೂರಿನಲ್ಲಿ ಭಾರತೀಯ ವಿಜ್ಞಾನ ಸಂಸ್ಥೆಯನ್ನು 1905 ರಲ್ಲಿ ಟಾಟಾರವರ ಬೆಂಬಲದಿಂದ ಸ್ಥಾಪಿಸಲಾಯಿತು. ನೀರಾವರಿ ಸೌಲಭ್ಯಗಳನ್ನೊದಗಿಸಲು ವಿಶೇಷ ಗಮನಕೊಡಲಾಯಿತು. ಬೆಳಗೊಳದ ಹತ್ತಿರ ಕಾವೇರಿ ನದಿಗೆ ಅಣೆಕಟ್ಟು ಒಂದನ್ನು ಕಟ್ಟಲಾಯಿತು. ಹೊಸ ರೈಲು ಮಾರ್ಗಗಳನ್ನು ನಿರ್ಮಿಸಲಾಯಿತು. ಅನೇಕ ದೊಡ್ಡ ಮತ್ತು ಸಣ್ಣಪ್ರಮಾಣದ ಕೈಗಾರಿಕೆಗಳನ್ನು ಸ್ಥಾಪಿಸಲಾಯಿತು. ಅವುಗಳಲ್ಲಿ ಭದ್ರಾವತಿಯ ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ, ಸಿಮೆಂಟ್ ಕಾರ್ಖಾನೆ, ಕಾಗದ ಕಾರ್ಖಾನೆ, ಮಂಡ್ಯದ ಸಕ್ಕರೆ ಕಾರ್ಖಾನೆ, ಮೈಸೂರಿನ ಗಂಧದ ಎಣ್ಣೆ ಕಾರ್ಖಾನೆ, ಬೆಂಗಳೂರಿನ ಸಾಬೂನು ಕಾರ್ಖಾನೆ, ಬೆಳಗೊಳದ ರಾಸಾಯನಿಕ ವಸ್ತುಗಳ ಮತ್ತು ಕೃತಕ ಗೊಬ್ಬರಗಳ ಕಾರ್ಖಾನೆ ಮುಂತಾದವುಗಳು. ನ್ಯಾಯ ವಿಧಾಯಕ ಸಭೆಯನ್ನು ರಚಿಸಲಾಯಿತು. ರಾಜ್ಯಾಂಗದ ಬದಲಾವಣೆಯಲ್ಲಿ ಇದೊಂದು ದೊಡ್ಡ ಹೆಜ್ಜೆಯಾಯಿತು.

ಕೃಷ್ಣರಾಜ ಒಡೆಯರು ಸರಳರೂ, ಸಾತ್ವಿಕ ಸ್ವಭಾವದವರೂ, ಸಮರ್ಥ ಆಡಳಿತಗಾರರೂ ಮತ್ತು ವಿದ್ಯಾಪಕ್ಷಪಾತಿಗಳೂ ಆಗಿದ್ದರು. ಅವರಿಗೆ ಲಲಿತಕಲೆಗಳಲ್ಲಿ ತುಂಬಾ ಅಭಿರುಚಿ. ಸಂಗೀತ ವಿದ್ವಾಂಸರುಗಳಿಗೆ ಪ್ರೋತ್ಸಾಹ ನೀಡಿದ್ದರು. ಪ್ರಸಿದ್ಧ ವಿದ್ವಾಂಸರುಗಳಾದ ಶ್ಯಾಮಾಶಾಸ್ತ್ರಿ, ಎಂ. ಹಿರಿಯಣ್ಣ, ವೀಣೆಶೇಷಣ್ಣ,

©KTBS NOT TO BE REPUBLISHED

ಸಾಂಬಯ್ಯ, ಬಿಡಾರಂ ಕೃಷ್ಣಪ್ಪ, ಮುತ್ತಯ್ಯ ಭಾಗವತರ್, ವಾಸುದೇವಾಚಾರ್ಯ, ಟಿ. ಚೌಡಯ್ಯ, ಮುಂತಾದವರು. ನಾಲ್ವಡಿ ಕೃಷ್ಣರಾಜ ಒಡೆಯರ ಪ್ರೋತ್ಸಾಹ ಪಡೆದರು. ಅವರ ಆಡಳಿತದಿಂದಾಗಿ ಮೈಸೂರು 'ಮಾದರಿ ರಾಜ್ಯ' ಎಂಬ ಹೆಸರನ್ನು ಪಡೆದಿತ್ತು. ಮಹಾತ್ಮ ಗಾಂಧಿಯವರು ಇವರನ್ನು 'ರಾಜಶ್ರೀ' ಎಂದು ಕರೆದಿದ್ದಾರೆ.

**ಜಯಚಾಮರಾಜ ಒಡೆಯರು (1940–1950) :** ಕೃಷ್ಣರಾಜ ಒಡೆಯರ ನಂತರ ಸಿಂಹಾಸನವನ್ನೇರಿದ ಜಯಚಾಮರಾಜ ಒಡೆಯರು ಸಾಮಾನ್ಯ ಹಾಗೂ ವಿಶೇಷ ಕಾಲೇಜುಗಳಲ್ಲಿ ಶಿಕ್ಷಣ ಪಡೆದು, ವಿಶ್ವಪರ್ಯಟನ ಮಾಡಿ ಲೋಕಾನುಭವ ಪಡೆದವರಾಗಿದ್ದರು. ಮಿರ್ಜಾ ಇಸ್ಮಾಯಿಲ್, ನ್ಯಾಪ್ತಿ ಮಾಧವರಾವ್ ಹಾಗೂ ಆರ್ಕಾಟ್ ರಾಮಸ್ವಾಮಿ ಮೊದಲಿಯಾರ್‌ರಂತಹ ದಿವಾನರುಗಳ ಸೇವೆಯು ದೊರಕಿತು.

ಜಯಚಾಮರಾಜರು ವಿದ್ವಾಂಸರು, ಸಂಗೀತತಜ್ಞರು, ವಾಗ್ಮಿ, ಸಾಹಿತ್ಯ, ಕಲೆಗಳ ಪೋಷಕರಾಗಿದ್ದರು. ಅನೇಕ ಗ್ರಂಥಗಳನ್ನು ರಚಿಸಿದ್ದರು. ಅಲ್ಲದೆ ಭಕ್ತಿಗೀತೆಗಳನ್ನು ರಚಿಸಿದ್ದಾರೆ. ಭಾರತ ಸ್ವಾತಂತ್ರ್ಯಾನಂತರ ಮೈಸೂರು ರಾಜ್ಯದ ರಾಜಪ್ರಮುಖರಾಗಿದ್ದರು.

## ದೋಂಡಿಯಾ ವಾಘ್ (1800)

ಆಧುನಿಕ ಕರ್ನಾಟಕದ ಚರಿತ್ರೆಯಲ್ಲಿ ಟಿಪ್ಪುವಿನ ನಂತರ ಅದರಲ್ಲಿಯೂ ಮುಖ್ಯವಾಗಿ 19ನೆಯ ಶತಮಾನದ ಪೂರ್ವಾರ್ಧದಲ್ಲಿ ಬ್ರಿಟಿಷ್ ಆಳ್ವಿಕೆಯ ವಿರುದ್ಧ ಕಂಡುಬಂದ ಪ್ರತಿಭಟನೆಗಳು ಮತ್ತು ಬಂಡಾಯಗಳು ಪ್ರಮುಖ ಸ್ಥಾನವನ್ನು ಪಡೆದುಕೊಂಡಿವೆ. ಇವುಗಳು ಸಶಸ್ತ್ರ ಬಂಡಾಯಗಳಾಗಿದ್ದವು. ಈ ಸಶಸ್ತ್ರ ಬಂಡಾಯಗಳಲ್ಲಿ ದೋಂಡಿಯಾ ವಾಘ್‌ನ ನಾಯಕತ್ವದಲ್ಲಿ ಕಂಡುಬಂದಿದ್ದ ಸಶಸ್ತ್ರ ಹೋರಾಟ ಪ್ರಮುಖವಾಗಿದೆ.

ದೋಂಡಿಯಾ ಚನ್ನಗಿರಿಯ ಮರಾಠ ಕುಟುಂಬದಲ್ಲಿ ಜನಿಸಿದನು. ಅವನ ಶೌರ್ಯ ಪರಾಕ್ರಮಗಳಿಂದ ಜನ ಅವನನ್ನು ವಾಘ್ ಎಂದು ಕರೆದರು. ಮರಾಠಿಯಲ್ಲಿ ವಾಘ್ ಎಂದರೆ ಹುಲಿ. ಕ್ರಿ.ಶ.1779ರ ಸುಮಾರಿಗೆ ಮೈಸೂರಿನ ಹೈದರಾಲಿಯ ಸೈನ್ಯದಲ್ಲಿ ಒಬ್ಬ ಅಶ್ವಾರೋಹಿ ಸೈನಿಕನಾಗಿ ಸೇರಿ ಕಾಲಾನಂತರ ಸೇನಾನಾಯಕನಾದನು. ಖಾಸಗಿಯಾಗಿ ಒಂದು ಸೈನ್ಯವನ್ನು ಸಜ್ಜುಗೊಳಿಸಿದ ಅವನು ಟಿಪ್ಪುವಿನ ಸೈನ್ಯದಲ್ಲಿ ಸೇವೆ ಸಲ್ಲಿಸಿದನು. ಆತನೊಂದಿಗೆ ಮನಸ್ತಾಪದಿಂದಾಗಿ ಅವನು ಸೆರೆಮನೆ ಸೇರುವಂತಾಯಿತು. ನಾಲ್ಕನೆಯ ಆಂಗ್ಲೋ ಮೈಸೂರು ಯುದ್ಧದ ಸಮಯದಲ್ಲಿ ಶ್ರೀರಂಗಪಟ್ಟಣದ ಪತನಾನಂತರ ಬ್ರಿಟಿಷರು ಈತನನ್ನು ಸೆರೆಮನೆಯಿಂದ ಬಿಡುಗಡೆಗೊಳಿಸಿದರು. ತರುವಾಯ ಇವನು ಒಂದು ಸೈನ್ಯವನ್ನು ಸಂಘಟಿಸಿ ಸೈನಿಕ ಕಾರ್ಯಾಚರಣೆಗಳನ್ನು ಪ್ರಾರಂಭಿಸಿದನು.

ಆತನ ಸೈನ್ಯ ದೊಡ್ಡದಾಗಿರಲಿಲ್ಲ. ಅವನು ಟಿಪ್ಪುವಿನ ಸೈನ್ಯದಲ್ಲಿದ್ದ ಅತೃಪ್ತ ಸೈನಿಕರು, ಅಧಿಕಾರದಿಂದ ಮುಕ್ತಗೊಳಿಸಲ್ಪಟ್ಟ ಪಾಳೇಯಗಾರರು ಮೊದಲಾದವರನ್ನು ಸಂಘಟಿಸಿ ಒಂದು ಸೈನ್ಯವನ್ನು ಸುಸಜ್ಜಿತಗೊಳಿಸಿ ಬಂಡಾಯದ ಬಾವುಟವನ್ನು ಹಾರಿಸಿದನು. ಶಿವಮೊಗ್ಗ ಮತ್ತು ಬಿದನೂರಿನ ಕೋಟೆಗಳನ್ನು ವಶಪಡಿಸಿಕೊಂಡನು. ಚಿತ್ರದುರ್ಗದ ಕೋಟೆಯನ್ನು ವಶಪಡಿಸಿಕೊಳ್ಳಲು ವಿಫಲ ಪ್ರಯತ್ನಗಳನ್ನು ನಡೆಸಿದನು. ಗವರ್ನರ್ ಜನರಲ್‌ನಾಗಿದ್ದ ಲಾರ್ಡ್ ವೆಲ್ಲೆಸ್ಲಿ ಬಂಡಾಯವನ್ನು ಹತ್ತಿಕ್ಕಲು ಪ್ರಾರಂಭಿಸಿದನು.

ದೋಂಡಿಯಾನ ನಿಯಂತ್ರಣದಲ್ಲಿದ್ದ ಶಿವಮೊಗ್ಗ, ಹೊನ್ನಾಳಿ, ಹರಿಹರ ಮೊದಲಾದವುಗಳ ಮೇಲೆ ಆಕ್ರಮಣ ನಡೆಸಿತು. ದೋಂಡಿಯಾ ತನ್ನ ನೆಲೆಯನ್ನು ಕಳೆದುಕೊಂಡನು. ಶಿಕಾರಿಪುರವನ್ನು ಬ್ರಿಟಿಷರು ವಶಪಡಿಸಿಕೊಂಡ ತರುವಾಯ ದೋಂಡಿಯಾ ನಿಜಾಮನ ಹತೋಟಿಯಲ್ಲಿದ್ದ ಗುತ್ತಿಯ ಕಡೆಗೆ ಪಲಾಯನಗೈದನು. ಆಗ ನಿಜಾಮನು ಗುತ್ತಿಯನ್ನು ಮುತ್ತಿದಾಗ ದೋಂಡಿಯಾ ಮರಾಠರ ಪ್ರದೇಶಕ್ಕೆ ಓಡಿಹೋದನು. ಮರಾಠ ಸೈನ್ಯ ಅವನನ್ನು ಸೋಲಿಸಿ ಅವನ ಶಸ್ತ್ರಾಸ್ತ್ರಗಳು, ಒಂಟೆ

© KTBS NOT TO BE REPUBLISHED


ಮತ್ತು ಆನೆಗಳನ್ನು ವಶಪಡಿಸಿಕೊಂಡರೂ ಧೃತಿಗೆಡದ ದೋಂಡಿಯಾ ತನ್ನ ಹೋರಾಟವನ್ನು ಮುಂದುವರಿಸಿದನು.

ಅನೇಕ ಅತೃಪ್ತ ಪಾಳೇಯಗಾರರು ದೋಂಡಿಯಾನಿಗೆ ಪ್ರೋತ್ಸಾಹಿಸಿದರು. ಮಲಬಾರಿನ ಮಾಹೆಯಲ್ಲಿದ್ದ ಫ್ರೆಂಚರು ಆತನಿಗೆ ಸಹಾಯ ಹಸ್ತವನ್ನು ನೀಡಿದರು. ಹರಿಹರ, ಚಿತ್ರದುರ್ಗ, ಶಿಕಾರಿಪುರ, ಸವಣೂರು, ರಾಣೆಬೆನ್ನೂರು, ಕಿತ್ತೂರು ಮತ್ತು ಲೋಂಡಾ ಹೀಗೆ ವಿಶಾಲ ಭೌಗೋಳಿಕ ಪ್ರದೇಶದಲ್ಲಿ ಬ್ರಿಟಿಷರ ಸೈನ್ಯ ಆತನನ್ನು ಹಿಂಬಾಲಿಸಿತು. ಶಿರಹಟ್ಟಿಯನ್ನು ತನ್ನ ಸುಪರ್ದಿಗೆ ತೆಗೆದುಕೊಂಡ ಬ್ರಿಟಿಷ್ ಸೈನ್ಯ ದೋಂಡಿಯಾನ ಸೈನ್ಯದ ಅನೇಕ ಸೈನಿಕರನ್ನು ಹತ ಮಾಡಿತು.

**ದೋಂಡಿಯಾ ವಾಘ್‌ನ ಅಂತ್ಯ :** ಲಾರ್ಡ್ ವೆಲ್ಲೆಸ್ಲಿ ಆತನಿಗೆ ಅಂತ್ಯವನ್ನು ಹಾಡಲು ನಿರ್ಧರಿಸಿದನು. ದೇಶಿಯ ಸಂಸ್ಥಾನಗಳ ರಾಜರ ಸಹಾಯವನ್ನು ಬ್ರಿಟಿಷರು ಕೋರಿದರು. ಶಿಕಾರಿಪುರದ ಕೋಟೆಯನ್ನು ಪುನಃ ಗೆದ್ದುಕೊಂಡ ದೋಂಡಿಯಾನ ಸೈನ್ಯವನ್ನು ಬ್ರಿಟಿಷ್ ಸೈನ್ಯ ಚದುರಿಸಿತು. ತುಂಗಭದ್ರಾ ಮತ್ತು ಮಲಪ್ರಭಾ ನದಿಗಳ ನಡುವಿನ ಪ್ರದೇಶದ ವಿಶಾಲ ಭೂಪ್ರದೇಶದಲ್ಲಿ ನಿರ್ಭೀತಿಯಿಂದ ಸಂಚರಿಸುತ್ತಿದ್ದ ದೋಂಡಿಯಾನ ಸೈನ್ಯವನ್ನು ಸೋಲಿಸಲು ಬ್ರಿಟಿಷರು ಪ್ರಯತ್ನಿಸಿದರು. ಎಲ್ಲಾ ದಿಕ್ಕುಗಳಿಂದಲೂ ಆತನನ್ನು ಬ್ರಿಟಿಷ್ ಸೈನ್ಯ ಸುತ್ತುವರೆಯಿತು. ರಾಯಚೂರಿನಿಂದ ಹೊರಟ ಅವನನ್ನು ಹಿಂಬಾಲಿಸಲಾಯಿತು. ನಿಜಾಮ ಮತ್ತು ಮರಾಠರ ಸೈನ್ಯದ ನಡುವೆ ಸಿಲುಕಿದ ದೋಂಡಿಯಾನ ನೇತೃತ್ವದಲ್ಲಿನ ಸೈನ್ಯದ ಮೇಲೆ ಬ್ರಿಟಿಷರು ಯಾಪಲಪೆರವಿ ಎಂಬ ಸ್ಥಳದಲ್ಲಿ ಕಾರ್ಯಾಚರಣೆ ನಡೆಸಿ ಕೋನ್‌ಗಲ್ ಎಂಬ ಸ್ಥಳದಲ್ಲಿ ಆತನನ್ನು ಹತ್ಯೆಗೈದರು. ತಮ್ಮ ನಾಯಕನ ಹತ್ಯೆಯ ನಂತರ ಅಳಿದುಳಿದ ಸೈನಿಕರು ಚದುರಿದರು. ಬಂಡುಕೋರರಿಂದ ಅಪಾರ ಪ್ರಮಾಣದ ಮದ್ದುಗುಂಡುಗಳನ್ನು ಮತ್ತು ಶಸ್ತ್ರಾಸ್ತ್ರಗಳನ್ನು ಬ್ರಿಟಿಷರು ವಶಪಡಿಸಿಕೊಂಡರು.

©KTBS NOT TO BE REPUBLISHED

### ಕಿತ್ತೂರಿನ ಬಂಡಾಯ – ವೀರರಾಣಿ ಚೆನ್ನಮ್ಮ (1824)



ಚೆನ್ನಮ್ಮ

ಬ್ರಿಟಿಷರು ತಮ್ಮ ಆಳ್ವಿಕೆಗೆ ವಿರುದ್ಧವಾಗಿದ್ದ ಹೈದರಾಲಿ, ಟಿಪ್ಪು ಮತ್ತು ಮರಾಠರ ಬಲಿಷ್ಠ ಪ್ರತಿರೋಧಕಗಳನ್ನು ಅಡಗಿಸಿದ ನಂತರ ತಮ್ಮ ಅಧಿಕಾರದ ಕ್ರೋಢೀಕರಣಕ್ಕಾಗಿ ಕೆಲವು ಕಾನೂನುಗಳನ್ನು ಜಾರಿಗೆ ತಂದರು. ಅವುಗಳಲ್ಲಿ ದತ್ತು ಮಕ್ಕಳಿಗೆ ಹಕ್ಕಿಲ್ಲವೆಂಬುದು ಒಂದು. ಈ ಕಾನೂನಿನ ವಿರುದ್ಧ ಸಂಘಟಿಸಲ್ಪಟ್ಟ ಸಶಸ್ತ್ರ ಬಂಡಾಯಗಳಲ್ಲಿ ಕಿತ್ತೂರಿನ ರಾಣಿ ಚೆನ್ನಮ್ಮನ ಹೋರಾಟ ಖ್ಯಾತಿಯನ್ನು ಗಳಿಸಿದೆ.

ಕಿತ್ತೂರು ಬೆಳಗಾಂ ಮತ್ತು ಧಾರವಾಡ ಜಿಲ್ಲೆಗಳ ನಡುವೆ ಇರುವ ಊರು ಕಿತ್ತೂರು ಸಂಸ್ಥಾನದ ಮಲ್ಲಸರ್ಜನ ಮರಣಾನಂತರ ಚೆನ್ನಮ್ಮ ಕಿತ್ತೂರಿನ ಆಡಳಿತ ವ್ಯವಹಾರಗಳಲ್ಲಿ ಹೆಚ್ಚು ಆಸಕ್ತಿ ವಹಿಸತೊಡಗಿದಳು. ಆತನ ಮರಣಾನಂತರ ಹಿರಿಯ ಮಗ ಶಿವಲಿಂಗರುದ್ರಸರ್ಜ ಕಿತ್ತೂರಿನ ಆಡಳಿತವನ್ನು ನಿರ್ವಹಿಸಲು ಪ್ರಾರಂಭಿಸಿದನು. ಆದರೆ ಆತನ ದೈಹಿಕ ಪರಿಸ್ಥಿತಿಗಳಿಂದಾಗಿ ಚೆನ್ನಮ್ಮ ನಿಜವಾದ ಆಡಳಿತಗಾರಳಾಗಿ ಜವಾಬ್ದಾರಿಯನ್ನು ನಿರ್ವಹಿಸುವಂತಾಯಿತು. ಶಿವಲಿಂಗರುದ್ರಸರ್ಜ ಮರಾಠರ ಯುದ್ಧದಲ್ಲಿ ಬ್ರಿಟಿಷರಿಗೆ ಸಹಾಯವನ್ನು ನೀಡಿದ್ದನು. ಇದರಿಂದಾಗಿ ಬ್ರಿಟಿಷರು ಆ ಸಂಸ್ಥಾನವನ್ನು ವಂಶಪಾರಂಪರ್ಯವಾಗಿ ಆತನಿಗೆ ನೀಡಿದ್ದು ಪ್ರತಿಯಾಗಿ ವಾರ್ಷಿಕ ಕಾಣಿಕೆಯನ್ನು ಪಡೆದುಕೊಳ್ಳುವಂತಾಯಿತು. ಈ ಒಪ್ಪಂದ ಥಾಮಸ್ ಮನ್ರೋನ ಕಾಲದಲ್ಲಿ ಜಾರಿಗೊಳಿಸಲ್ಪಟ್ಟಿತು.

ಶಿವಲಿಂಗರುದ್ರಸರ್ಜನ ಮರಣಾನಂತರ ಶಿವಲಿಂಗಪ್ಪ ಎಂಬ ಹುಡುಗನನ್ನು ದತ್ತು ಪಡೆದು ಚೆನ್ನಮ್ಮ ಆಡಳಿತವನ್ನು ನಿರ್ವಹಿಸಲು ಪ್ರಾರಂಭಿಸಿದಳು. ಥ್ಯಾಕರೆ ಆಗ ಧಾರವಾಡದ ಕಲೆಕ್ಟರ್ ಮತ್ತು ಪೊಲಿಟಿಕಲ್ ಏಜೆಂಟನಾಗಿದ್ದನು. ಅವನು ಬಾಂಬೆಯ ಗವರ್ನರನಿಗೆ ದತ್ತಕದ ಬಗ್ಗೆ ವರದಿಯನ್ನು ಸಲ್ಲಿಸಿ ದತ್ತು ಮಕ್ಕಳಿಗೆ ಹಕ್ಕು ನಿರಾಕರಿಸಿ ಕಿತ್ತೂರಿನ ಆಡಳಿತವನ್ನು ವಶಪಡಿಸಿಕೊಳ್ಳಲು ಯತ್ನಿಸಿದನು. ಕಿತ್ತೂರಿನ ಖಜಾನೆ, ಕೋಟೆ ಕೊತ್ತಲಗಳ ಸುಪರ್ದಿಯನ್ನು ತನ್ನ ವಶಕ್ಕೆ ತೆಗೆದುಕೊಂಡನು. ಚೆನ್ನಮ್ಮ ಥ್ಯಾಕರೆಯ ಈ ಪ್ರಯತ್ನಗಳನ್ನು ವಿಫಲಗೊಳಿಸಲು ಯುದ್ಧವನ್ನು ಅನಿವಾರ್ಯವೆಂದು ಬಗೆದಳು. ಬ್ರಿಟಿಷರೂ ತಮ್ಮ ಸೈನ್ಯವನ್ನು ಸಿದ್ಧಮಾಡಲು ಆರಂಭಿಸಿದರು. ಕಿತ್ತೂರಿನ ಸೈನ್ಯ ಬ್ರಿಟಿಷ್ ಸೈನ್ಯದ ಮೇಲೆ ದಾಳಿಮಾಡಿತು. ಈ ದಾಳಿಯಲ್ಲಿ ಥ್ಯಾಕರೆ ಗುಂಡೇಟಿಗೆ ಬಲಿಯಾದ. ಅನೇಕ ಬ್ರಿಟಿಷ್ ಸೈನಿಕರನ್ನು ಸೆರೆಮನೆಗೆ ದೂಡಲಾಯಿತು.

ಕಿತ್ತೂರನ್ನು ವಶಪಡಿಸಿಕೊಳ್ಳಲೇಬೇಕೆಂಬ ದೃಢ ನಿರ್ಧಾರದಿಂದ ಬ್ರಿಟಿಷರು ಮತ್ತಷ್ಟು ಸನ್ನದ್ಧರಾದರು. ಕರ್ನಲ್ ಡೀಕ್‌ನ ನೇತೃತ್ವದಲ್ಲಿ ಬ್ರಿಟಿಷ್ ಸೈನ್ಯ ಕಿತ್ತೂರಿಗೆ ಮುತ್ತಿಗೆ ಹಾಕಿತು. ಸೈನಿಕರು ವೀರಾವೇಶದಿಂದ ಹೋರಾಡಿದರು. ಬ್ರಿಟಿಷರ ಸೈನ್ಯದಿಂದ ತಪ್ಪಿಸಿಕೊಂಡ ಚೆನ್ನಮ್ಮನನ್ನು ಸೆರೆಹಿಡಿಯಲಾಯಿತು. ಕಿತ್ತೂರು ಬ್ರಿಟಿಷರ ವಶವಾಯಿತು. ಚೆನ್ನಮ್ಮ ಮತ್ತು ಮೊದಲಾದವರನ್ನು ಬೈಲಹೊಂಗಲ ಕೋಟೆಯ ಸೆರೆಮನೆಯಲ್ಲಿ ಇರಿಸಲಾಯಿತು. ಚೆನ್ನಮ್ಮ ಮರಣ ಹೊಂದಿದರು. ಇಂದಿಗೂ ಕೂಡಾ ನಾಡಿಗೆ ಅವಳು ಆದರ್ಶಪ್ರಾಯಳಾಗಿದ್ದಾಳೆ.

**ಸಂಗೊಳ್ಳಿ ರಾಯಣ್ಣ (1829–30)**

ಕಿತ್ತೂರಿನ ಚೆನ್ನಮ್ಮನೊಂದಿಗೆ ಸಂಗೊಳ್ಳಿಯ ರಾಯಣ್ಣನ ಹೆಸರು ಅಜರಾಮರ ಮತ್ತು ಆದರ್ಶಪ್ರಾಯವೆನಿಸಿದೆ. ರಾಯಣ್ಣ ವೀರಯೋಧ. ಕಿತ್ತೂರಿನ ಸ್ವಾತಂತ್ರ್ಯಕ್ಕಾಗಿ ಹೋರಾಡುವುದು ತನ್ನ ಆದ್ಯ ಕರ್ತವ್ಯವೆಂದು ಭಾವಿಸಿದ್ದನು. ಈತನ ಮನೆತನದವರು ಪರಂಪರೆಯಿಂದಲೂ ಸೈನಿಕರಾಗಿ ಸೇವೆಯನ್ನು ಸಲ್ಲಿಸಿದ್ದರು. ರಾಯಣ್ಣ ಕಿತ್ತೂರಿನ ಯುದ್ಧದಲ್ಲಿ ಚೆನ್ನಮ್ಮನ ಜೊತೆಯಲ್ಲಿ ಬ್ರಿಟಿಷರ ವಿರುದ್ಧ ಹೋರಾಡಿದ್ದನು. ಯುದ್ಧದಲ್ಲಿ ಸೆರೆಯಾಳಾಗಿ ಬಂಧಿಸಲ್ಪಟ್ಟು ತರುವಾಯ ಬಿಡುಗಡೆಗೊಂಡನು.


**ಸಂಗೊಳ್ಳಿ ರಾಯಣ್ಣ**

ಈತನ ಬಗ್ಗೆ ಮೌಖಿಕ ಆಕರಗಳು ಲಭ್ಯವಿವೆ. ಅವನು ಸೈನಿಕರನ್ನು ಸಂಘಟಿಸುತ್ತಾ ಸ್ವಾತಂತ್ರ್ಯದ ಬಗ್ಗೆ ಅಭಿಮಾನವನ್ನು ಬೆಳೆಸಿಕೊಂಡನು. ಭೌಗೋಳಿಕವಾಗಿ ಆಯಕಟ್ಟಿನ ಸ್ಥಳಗಳಲ್ಲಿ ಗುಪ್ತ ಸಭೆಗಳನ್ನು ನಡೆಸುವ ಮೂಲಕ ತನ್ನ ಮುಂದಿನ ಯೋಜನೆಗಳನ್ನು ರೂಪಿಸಿಕೊಂಡನು. ತಕ್ಷಣದ ಅವನ ಉದ್ದೇಶಗಳು ಯಾವುದೆಂದರೆ ಬ್ರಿಟಿಷರ ಆಡಳಿತ ಯಂತ್ರದ ಪ್ರಮುಖ ಅಂಗವಾಗಿದ್ದ ತಾಲ್ಲೂಕು ಕಛೇರಿಗಳು ಮತ್ತು ಖಜಾನೆಗಳನ್ನು ಲೂಟಿ ಮಾಡುವುದು. ಮೊದಲು ನಂದಗಡ ಮತ್ತು ಖಾನಾಪುರ ತರುವಾಯ ಸಂಪಗಾವಿ ಆತನ ಕಾರ್ಯಾಚರಣೆಗಳ ಸ್ಥಳಗಳಾದವು. ಆತನ ಸೈನ್ಯ ಐನೂರಷ್ಟಿತ್ತು. ಬ್ರಿಟಿಷರ ಸೈನ್ಯಕ್ಕೆ ಸಹಾಯವನ್ನು ನೀಡುತ್ತಿದ್ದ ಹಳ್ಳಿಗರು ಅವನ ಆಕ್ರೋಶಕ್ಕೆ ತುತ್ತಾದರು. ಬ್ರಿಟಿಷರು ರಾಯಣ್ಣನು ರಾಣಿ ಚೆನ್ನಮ್ಮನ ಕುಮ್ಮಕ್ಕಿನಿಂದ ಸೈನಿಕ ಕಾರ್ಯಾಚರಣೆಗಳನ್ನು ನಡೆಸುತ್ತಿದ್ದಾನೆ ಎಂದು ಭಾವಿಸಿದ್ದರು. ಹೀಗಾಗಿ ಚೆನ್ನಮ್ಮನನ್ನು ಬೈಲಹೊಂಗಲದಿಂದ ಕುಸುಗಲ್ಲಿನ ಸೆರೆಮನೆಗೆ ಸ್ಥಳಾಂತರಿಸಿದರು.

@KTBS NOT TO BE REPUBLISHED

ರಾಯಣ್ಣನನ್ನು ಸೆರೆಹಿಡಿಯಲು ಬ್ರಿಟಿಷರು ಒಂದು ಸಂಚನ್ನು ರೂಪಿಸಿದರು. ಕಿತ್ತೂರಿನ ಚೆನ್ನಮ್ಮಳನ್ನು ವಿರೋಧಿಸುತ್ತಿದ್ದ ದೇಸಾಯಿಗಳನ್ನು ಪ್ರಚೋದಿಸಿದರು. ಅಮಲ್ದಾರನಾಗಿದ್ದ ಕೃಷ್ಣರಾಯ ಎಂಬುವವನು ಈ ಸಂಚಿಗೆ ಕೈಜೋಡಿಸಿದನು. ಸಂಚಿಗೆ ಬಲಿಯಾದ ರಾಯಣ್ಣನನ್ನು ಇಂಗ್ಲಿಷ್ ಸೈನ್ಯ ಬಂಧಿಸಿ ಧಾರವಾಡಕ್ಕೆ ತಂದಿತು. ಆತನ ಬಂಧನಾನಂತರ ಆತನ ಸೈನಿಕರು ಶರಣಾಗತರಾದರು. ಮುಖ್ಯ ಅಪರಾಧಿ ಎಂದು ಘೋಷಿಸಿ 1831ರಲ್ಲಿ ನಂದಗಡದಲ್ಲಿ ಅವನನ್ನು ಗಲ್ಲಿಗೇರಿಸಲಾಯಿತು. ಆತನ ಅನೇಕ ಅನುಯಾಯಿಗಳನ್ನು ಜೀವಾವಧಿ ಶಿಕ್ಷೆಗೆ ಗುರಿಪಡಿಸಲಾಯಿತು. ಸಂಗೊಳ್ಳಿ ರಾಯಣ್ಣನ ಜೀವನ ಮತ್ತು ದೇಶಪ್ರೇಮವನ್ನು ಆ ಪ್ರದೇಶದ ಲಾವಣಿಗಳು ಇಂದಿಗೂ ಜೀವಂತವಾಗಿಸಿವೆ.

### ಅಮರಸುಳ್ಯ ಬಂಡಾಯ

ಇದು ಮೂಲತಃ ರೈತ ಬಂಡಾಯ ಇದರ ಹಿನ್ನೆಲೆಯನ್ನು 1835–37ರ ಅವಧಿಯಲ್ಲಿ ಕರಾವಳಿ ಮತ್ತು ಕೊಡಗು ಪ್ರಾಂತ್ಯದಲ್ಲಿ ಕಂಡುಬಂದಿದ್ದ ಹೋರಾಟಗಳಲ್ಲಿ ಗುರುತಿಸಬಹುದಾಗಿದೆ. ಕೊಡಗಿನಲ್ಲಿ ಆಳ್ವಿಕೆಯನ್ನು ನಡೆಸುತ್ತಿದ್ದ ಹಾಲೇರಿ ರಾಜವಂಶದ ಚಿಕ್ಕವೀರರಾಜೇಂದ್ರನನ್ನು ಬ್ರಿಟಿಷರು 1834ರಲ್ಲಿ ಪದಚ್ಯುತಗೊಳಿಸಿ ಅವನನ್ನು ಬೆಂಗಳೂರಿನ ಮೂಲಕ ವೆಲ್ಲೂರಿಗೆ ತರುವಾಯ ಕಾಶಿಗೆ ಸಾಗಿಸಿದರು. ಆತನ ಪದಚ್ಯುತಿ ಕೊಡಗಿನಲ್ಲಿ ರಾಜಕೀಯ ಅಸಮಾಧಾನವನ್ನು ಸೃಷ್ಟಿಸಿತು. ಇದರ ವಿರುದ್ಧ ಸ್ವಾಮಿ ಅಪರಂಪಾರ, ಕಲ್ಯಾಣಸ್ವಾಮಿ ಮತ್ತು ಪುಟ್ಟಬಸಪ್ಪ ಸಶಸ್ತ್ರ ಬಂಡಾಯವನ್ನು ಸಂಘಟಿಸಿದರು. ಇವರು ಮೂವರು ತಾವು ಕೊಡಗಿನ ಪದಚ್ಯುತ ರಾಜನ ವಂಶದವರೆಂದು ಹೇಳಿಕೊಂಡರು. ಸ್ವಾಮಿ ಅಪರಂಪಾರ ಬಂಡಾಯದ ಮುಖಂಡನಾದನು. 1835ರಲ್ಲಿ ಆತನನ್ನು ಬ್ರಿಟಿಷರು ಸೆರೆಹಿಡಿದು ಬೆಂಗಳೂರಿಗೆ ರವಾನಿಸಿದರು. ಕಲ್ಯಾಣಸ್ವಾಮಿ 1837ರಲ್ಲಿ ಬಂಧಿಸಲ್ಪಟ್ಟನು. ಆತನನ್ನು ಮೈಸೂರಿನ ಸೆರೆಮನೆಯಲ್ಲಿ ಇಡಲಾಯಿತು.

**ಪುಟ್ಟಬಸಪ್ಪ:** ಕೆಳಕೊಡಗಿನ ಜನರು ಕಲ್ಯಾಣ ಸ್ವಾಮಿಯ ನಿಧನಾನಂತರ ಬಂಡಾಯವನ್ನು ಮುಂದುವರೆಸಿದರು. ಕೆನರಾ ಪ್ರಾಂತ್ಯದ ಸುಳ್ಯ, ಬೆಳ್ಳಾರೆ ಮತ್ತು ಪುತ್ತೂರು ಮೊದಲಾದ ಸ್ಥಳಗಳು 'ಅಮರ ಸುಳ್ಯ' ಬಂಡಾಯದ ಕೇಂದ್ರ ಸ್ಥಾನಗಳಾಗಿದ್ದವು. ಸುಳ್ಯದ ರೈತನೋರ್ವ ಕೊಡಗಿನ ಶನಿವಾರಸಂತೆಯ ಪುಟ್ಟಬಸಪ್ಪ ಎಂಬ ರೈತನನ್ನು ಕಲ್ಯಾಣಸ್ವಾಮಿಯನ್ನಾಗಿ ಆರಿಸಿದ್ದು ಇವನು ತನ್ನನ್ನು ಸ್ವಾಮಿ ಅಪರಂಪಾರ ಎಂದು ಕರೆದುಕೊಂಡಿದ್ದು ಸ್ವಾರಸ್ಯಕರ ಮಾತ್ರವಲ್ಲ ಬಂಡಾಯದ ಚಲನಶೀಲತೆಯನ್ನು ಪುಷ್ಟೀಕರಿಸುತ್ತದೆ. ಇವನು ಬಂಡಾಯದ ನಾಯಕತ್ವವನ್ನು ವಹಿಸಿಕೊಂಡನು.

ಘಟ್ಟ ಪ್ರದೇಶದಲ್ಲಿ ಈ ಬಂಡಾಯ ಪ್ರಾರಂಭವಾಯಿತು. ಪುಟ್ಟಬಸಪ್ಪ ಬಂಡುಕೋರರನ್ನು ಸಂಘಟಿಸಿ ಜನರನ್ನು ಸಂತೈಸಿದನು. ಬಂಡುಕೋರರ ಸರ್ಕಾರ ಸ್ಥಾಪನೆಯ ನಂತರ ತಂಬಾಕು ಮತ್ತು ಉಪ್ಪಿನ ಮೇಲಿನ ಸುಂಕವನ್ನು ರದ್ದು ಮಾಡಲಾಗುವುದು ಎಂದೂ ಘೋಷಿಸಲಾಯಿತು. ಶ್ರೀಮಂತ ರೈತರು, ಪಾರುಪತ್ತೆಗಾರರು, ಭೂಹಿಡುವಳಿದಾರರಿಗೆ ಆಶ್ವಾಸನೆಗಳನ್ನು ನೀಡಲಾಯಿತು. ಬೆಳ್ಳಾರೆಯಲ್ಲಿದ್ದ ಸರ್ಕಾರಿ ಕಛೇರಿಯನ್ನು ವಶಪಡಿಸಿಕೊಂಡು ಸರ್ಕಾರಿ ಅಧಿಕಾರಿಗಳನ್ನು ಬಂಧಿಸಿದ್ದು ಬಂಡಾಯದ ಪ್ರಥಮ ಹೆಜ್ಜೆಯಾಗಿದೆ. ಸುಳ್ಯ ಮತ್ತು ಆಸುಪಾಸಿನಲ್ಲಿ ಸಾಮಾನ್ಯ ಜನರಿಗೆ ಕಿರುಕುಳ ನೀಡುತ್ತಿದ್ದ ಅಮಲ್ದಾರನೋರ್ವನ ಹತ್ಯೆ ಪುಟ್ಟಬಸಪ್ಪನ ಜನಪ್ರಿಯತೆಯನ್ನು ಹೆಚ್ಚಿಸಿತ್ತು. ಇದರಿಂದಾಗಿ ಬಂಡಾಯ ವ್ಯಾಪಕ ಪ್ರಚಾರ ಮತ್ತು ಬೆಂಬಲವನ್ನು ಪಡೆದುಕೊಂಡಿತು.

ಹೋರಾಟಗಾರರು ಪುತ್ತೂರಿನಲ್ಲಿ ಬ್ರಿಟಿಷ್ ಸೈನ್ಯವನ್ನು ಎದುರಿಸಿದ್ದರು. ಇವರ ಉದ್ದೇಶ ಮಂಗಳೂರನ್ನು ವಶಪಡಿಸಿಕೊಳ್ಳುವುದಾದುದರಿಂದ ಬ್ರಿಟಿಷರು ಮಂಗಳೂರನ್ನು ರಕ್ಷಿಸುವ

NOT TO BE REPUBLISHED @KTBS

ಪ್ರಯತ್ನದಲ್ಲಿ ತಮ್ಮನ್ನು ತೊಡಗಿಸಿಕೊಂಡರು. ಪುತ್ತೂರಿನಿಂದ ಮಂಗಳೂರಿನ ಕಡೆಗೆ ತೆರಳಿದ ಅವರು ಪಾಣೆಮಂಗಳೂರು ಮತ್ತು ಬಂಟ್ವಾಳದಲ್ಲಿ ಕಾರ್ಯಾಚರಣೆಗಳನ್ನು ನಡೆಸಿದರು. ಬಂಟ್ವಾಳದ ಜೈಲು ಮತ್ತು ಖಜಾನೆ ಲೂಟಿಗೈಯ್ಯಲ್ಪಟ್ಟವು.

ಇದನ್ನು ಹತ್ತಿಕ್ಕಲು ಬ್ರಿಟಿಷರು ಕಣ್ಣಾನೂರು, ತಲ್ಲಿಚೇರಿ ಮತ್ತು ಬಾಂಬೆಯ ಸೈನ್ಯವನ್ನು ಅಪೇಕ್ಷಿಸಿದರು. ಇದನ್ನು ಅರಿತ ಪುಟ್ಟಬಸಪ್ಪ ಮತ್ತು ಆತನ ಸಂಗಡಿಗರು ಸುಳ್ಯಕ್ಕೆ ಪಲಾಯನ ಮಾಡಿದರು. ಬ್ರಿಟಿಷ್ ಸೈನ್ಯ ಕೊಡಗಿನಲ್ಲಿ ಸ್ಥಳೀಯರ ಸಹಕಾರದಿಂದ ಆತನನ್ನು ಮತ್ತು ಆತನ ಸಹಚರರನ್ನು ಸೆರೆಹಿಡಿಯಿತು. ಸೆರೆಸಿಕ್ಕಿದ ಪುಟ್ಟಬಸಪ್ಪ, ಲಕ್ಷ್ಮಪ್ಪ, ಬಂಗರಸ, ಕೆದಂಬಾಡಿ ರಾಮಯ್ಯಗೌಡರು ಮತ್ತು ಗುಡ್ಡೆಮನೆ ಅಪ್ಪಯ್ಯ ಇವರುಗಳನ್ನು ಗಲ್ಲಿಗೇರಿಸಲಾಯಿತು. ದಂಗೆ ವಿಫಲವಾದರೂ, ಸಮಕಾಲೀನವಾಗಿ ಪ್ರಾಮುಖ್ಯ ಹೊಂದಿತ್ತು ಮತ್ತು ಅದು ಬ್ರಿಟಿಷ್ ವಿರೋಧಿಯಾಗಿತ್ತು ಎಂದು ಹೇಳಬಹುದಾಗಿದೆ.

## ಸುರಪುರ ಮತ್ತು ಕೊಪ್ಪಳ ಬಂಡಾಯ

### ಸುರಪುರ

ಸುರಪುರ ಈಗಿನ ಯಾದಗಿರಿ ಜಿಲ್ಲಾ ಕೇಂದ್ರದಿಂದ ಸುಮಾರು 50 ಕಿ.ಮೀ. ದೂರದಲ್ಲಿದೆ. ಮೊಘಲರ ಚಕ್ರವರ್ತಿ ಔರಂಗಜೇಬನ ಕಾಲದಿಂದಲೂ ಇದು ಪ್ರಾಮುಖ್ಯವನ್ನು ಪಡೆದಿತ್ತು. ನಿಜಾಮ ಮತ್ತು ಮರಾಠರ ಪೇಶ್ವೆಗಳ ಕಾಲದಲ್ಲಿ ಇದು ಒಂದು ಸಾಮಂತ ರಾಜ್ಯವಾಗಿ ಪರಿಣಮಿಸಿತು. ಕಾಲಾನಂತರ ಭೌಗೋಳಿಕ ಪ್ರದೇಶಗಳ ಮೇಲಿನ ಹತೋಟಿಯು ಕುಸಿದು ಕೇವಲ ಸೀಮಿತ ಭೌಗೋಳಿಕ ಪ್ರದೇಶದ ಮೇಲೆ ತನ್ನ ರಾಜಕೀಯ ಸ್ವಾಮ್ಯವನ್ನು ಇದು ಪಡೆದುಕೊಂಡಿತು. ವೆಂಕಟಪ್ಪ ನಾಯಕನ ಕಾಲದಲ್ಲಿ ಸುರಪುರ ಬ್ರಿಟಿಷ್ ವಿರೋಧಿ ಬಂಡಾಯದ ಕಿಚ್ಚನ್ನು ಗಳಿಸಿಕೊಂಡಿತು.

**ವೆಂಕಟಪ್ಪ ನಾಯಕ:** ತನ್ನ ತಂದೆ ಕೃಷ್ಣಪ್ಪನಾಯಕನ ಮರಣಾನಂತರ ಈತನು ಪಟ್ಟಕ್ಕೆ ಬಂದನು. 1834ರಲ್ಲಿ ಜನಿಸಿದ ಇವನು ತನ್ನ ಅಪ್ರಾಪ್ತ ವಯಸ್ಸಿಗೆ ಪಟ್ಟಕ್ಕೆ ಬಂದನು. ಆದರೆ ಕೃಷ್ಣಪ್ಪನಾಯಕನ ಸೋದರನಾಗಿದ್ದ ಪೆದ್ದನಾಯಕ ಎಂಬುವವನು ತಗಾದೆ ಮಾಡಲಾಗಿ ಸುರಪುರದ ಆಂತರಿಕ ರಾಜಕೀಯ ಚಟುವಟಿಕೆಗಳು ಕ್ಷೋಭೆಗೊಂಡವು. ಬ್ರಿಟಿಷರು ಇದರ ಸಂಬಂಧ ಆಸಕ್ತಿ ವಹಿಸಿದರು. 1842ರಲ್ಲಿ ಬ್ರಿಟಿಷರು ಮೆಡೋಸ್ ಟೇಲರ್ ಎಂಬುವನನ್ನು ಪೊಲಿಟಿಕಲ್ ಏಜೆಂಟನನ್ನಾಗಿ ನೇಮಿಸಿ ಸಂಸ್ಥಾನದ ಮೇಲೆ ತಮ್ಮ ಪರೋಕ್ಷ ಹತೋಟಿಯನ್ನು ಸ್ಥಾಪಿಸಿದರು.

ಟೇಲರ್ ಸುಧಾರಣಾವಾದಿಯೂ ಆಗಿದ್ದನು. ಸುರಪುರ ಸಂಸ್ಥಾನವನ್ನು ಅಭಿವೃದ್ಧಿಪಡಿಸಿದನು. ಪೆದ್ದನಾಯಕನನ್ನು ಸಂಸ್ಥಾನದ ದಿವಾನನನ್ನಾಗಿ ನೇಮಿಸಿದನು. ಸಂಸ್ಥಾನದಾದ್ಯಂತ ಭೂಸಮೀಕ್ಷೆ ಮಾಡಿಸಿದನು. ಸಂಸ್ಥಾನದ ಆದಾಯ ಹೆಚ್ಚಲು ಈತನು ಅನುಸರಿಸಿದ ನೀತಿಗಳೇ ಕಾರಣಗಳಾಗಿವೆ. ವೆಂಕಟಪ್ಪ ನಾಯಕನಿಗೆ ಸೂಕ್ತವಾದ ಶಿಕ್ಷಣವನ್ನು ಕೊಡಿಸುವ ವ್ಯವಸ್ಥೆಗಳನ್ನು ಕಲ್ಪಿಸಿಕೊಟ್ಟನು. 1853ರಲ್ಲಿ ವೆಂಕಟಪ್ಪನಾಯಕ ಅಧಿಕಾರಕ್ಕೆ ಬಂದನು.

**ಸುರಪುರ ದಂಗೆ :** ಬ್ರಿಟಿಷ್ ಸರ್ಕಾರವು ಸುರುಪುರದ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಅವಲೋಕಿಸುತ್ತಿತ್ತು. 1857ರಲ್ಲಿ ಪ್ರಾರಂಭದ ಹೋರಾಟದಲ್ಲಿನ ನಾನಾಸಾಹೇಬನ ಪ್ರತಿನಿಧಿಗಳು ಸುರಪುರದಲ್ಲಿದ್ದಾರೆ ಎಂಬ ಪುಕಾರು ಕಂಡುಬಂದಿತು. ಇದರಿಂದಾಗಿ ಬ್ರಿಟಿಷರು ರಾಜನನ್ನು ಸಂಶಯದಿಂದ ಕಾಣುವಂತಾಯಿತು. ರಾಜನ ಅವಧಿಯಲ್ಲಿನ ಆಡಳಿತದ ಬಗ್ಗೆ ವರದಿ ನೀಡಲು ಬ್ರಿಟಿಷ್ ಸರ್ಕಾರ ಕ್ಯಾಂಪ್‌ಬೆಲ್ ಎಂಬ ಅಧಿಕಾರಿಯನ್ನು ನೇಮಿಸಿತು. ಇವನು ರಾಜನು ಆಡಳಿತ ದುರ್ವ್ಯವಹಾರಗಳಲ್ಲಿ ನಿರತನಾಗಿದ್ದಾನೆ ಎಂಬ ಅಂಶವನ್ನು ವರದಿಯಲ್ಲಿ ಕಾಣಿಸಿ ಹೈದರಾಬಾದ್‌ನ ರೆಸಿಡೆಂಟ್‌ಗೆ ಸಲ್ಲಿಸಿದನು.

© KTBS NOT TO BE REPUBLISHED

ವೆಂಕಟಪ್ಪ ನಾಯಕನನ್ನು ಸಾಮಾನ್ಯವಾಗಿ ಕರ್ನಾಟಕದ ಚರಿತ್ರೆಯಲ್ಲಿ 1857ರ ಕ್ರಾಂತಿಯ ನಾಯಕನೆಂದೂ ಇತಿಹಾಸಕಾರರು ವರ್ಣಿಸಿದ್ದಾರೆ. 1858ರಲ್ಲಿ ಬ್ರಿಟಿಷ್ ಸೈನ್ಯ ಸುರಪುರವನ್ನು ಆಕ್ರಮಿಸಿತು. ಯುದ್ಧ ಮುಂದುವರಿಯಿತು. ಬ್ರಿಟಿಷರು ಸುರಪುರ ಕೋಟೆಯನ್ನು ವಶಪಡಿಸಿಕೊಂಡರು. ವೆಂಕಟಪ್ಪ ನಾಯಕನ ಅಂತ್ಯಕ್ಕೆ ಸಂಬಂಧಿಸಿದಂತೆ ಅನೇಕ ಗೊಂದಲಗಳಿವೆ.

**ಕೊಪ್ಪಳದ ವೀರಪ್ಪ :** ಬ್ರಿಟಿಷ್ ವಿರೋಧಿ ಚಳವಳಿ, ಸಶಸ್ತ್ರ ಬಂಡಾಯ ಮತ್ತು ದಂಗೆಗಳಲ್ಲಿ ಕೊಪ್ಪಳದಲ್ಲಿನ ದಂಗೆಯೂ ಸಹ ಪ್ರಮುಖವಾಗಿದೆ. ಕೊಪ್ಪಳ ಮತ್ತು ಸನಿಹದ ಭೌಗೋಳಿಕ ಪ್ರದೇಶಗಳು ಹೈದರಾಬಾದ್ ನಿಜಾಮನ ಆಡಳಿತ ನಿಯಂತ್ರಣಕ್ಕೆ ಒಳಪಟ್ಟಿದ್ದರೂ ದೌರ್ಜನ್ಯ ಕಂಡುಬಂದಿತ್ತು. ಹೀಗಾಗಿ ಕೊಪ್ಪಳದ ಕೆಲವು ಜಮೀನ್ದಾರರು ಅನಿವಾರ್ಯವಾಗಿ ಬಂಡೆದ್ದರು. ಹೀಗೆ ತಿರುಗಿಬಿದ್ದವರಲ್ಲಿ ವೀರಪ್ಪನು ಪ್ರಮುಖನಾದವನು.

ವೀರಪ್ಪ ಜಮೀನ್ದಾರನಾಗಿದ್ದು ಬಂಡೆದ್ದು ಕೊಪ್ಪಳ ಮತ್ತು ಸನಿಹದ ಕೋಟೆಗಳನ್ನು ತನ್ನ ಸುಪರ್ದಿಗೆ ವಹಿಸಿಕೊಂಡನು. ವೀರಪ್ಪನ ಈ ಉದ್ದೇಶದ ಮರ್ಮ ಅರಿತ ಅನೇಕ ರೈತರು ಮತ್ತು ಜಮೀನ್ದಾರರು ಆತನೊಂದಿಗೆ ಕೈ ಜೋಡಿಸಿದರು. ನಿಜಾಮರೊಂದಿಗೆ ಸಂಪರ್ಕವನ್ನು ಸಾಧಿಸಿದ ಬ್ರಿಟಿಷರು ವೀರಪ್ಪನ ನೇತೃತ್ವದಲ್ಲಿನ ಬಂಡಾಯವನ್ನು ಸದೆಬಡಿಯಲು ಸೈನ್ಯವನ್ನು ನಿಯೋಜಿಸಿದರು. ಕಡಿಮೆ ಸೈನಿಕರ ಬೆಂಬಲವನ್ನು ಹೊಂದಿದ್ದ ವೀರಪ್ಪ ಸತತವಾಗಿ ಹೋರಾಟವನ್ನು ನಡೆಸಿ ಮರಣ ಹೊಂದಿದನು. ತರುವಾಯ ಬ್ರಿಟಿಷರು ಕೊಪ್ಪಳದ ಕೋಟೆಯನ್ನು ವಶಪಡಿಸಿಕೊಂಡರು. ಈ ದಂಗೆಯ ಪ್ರಭಾವ ಅಲ್ಪಾವಧಿಯದ್ದಾಗಿದ್ದರೂ ಅದಕ್ಕೆ ನಾಯಕತ್ವವನ್ನು ನೀಡಿದ ವೀರಪ್ಪ ಒಬ್ಬ ಸಮರ್ಥ ಸಶಸ್ತ್ರ ಹೋರಾಟಗಾರನೇ ಆಗಿದ್ದಾನೆ.

@KTBS NOT TO BE REPUBLISHED

## ಹಲಗಲಿಯ ಬೇಡರ ದಂಗೆ

ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನಲ್ಲಿ ಹಲಗಲಿ ಎಂಬುದು ಒಂದು ಪುಟ್ಟಗ್ರಾಮ. ಹಿಂದೆ ಇದು ಮುಧೋಳ ಸಂಸ್ಥಾನದ ಆಳ್ವಿಕೆಗೆ ಒಳಪಟ್ಟಿತು. 1857ರ ಬಂಡಾಯದ ಸಂದರ್ಭದಲ್ಲಿ ಬ್ರಿಟಿಷರು ತಮ್ಮ ಆಳ್ವಿಕೆಯ ಪ್ರದೇಶದಲ್ಲಿ ಶಸ್ತ್ರಗಳ ಬಳಕೆಯನ್ನು ನಿರ್ಬಂಧಿಸಿ ಕಾನೂನೊಂದನ್ನು ಜಾರಿಗೆ ತಂದರು. ಇದನ್ನು ಹಲಗಲಿಗೂ ಸಹ ಅನ್ವಯಿಸಲಾಯಿತು. ಹಲಗಲಿಯ ಬೇಡರು ತಲೆತಲಾಂತರಗಳಿಂದ ಬೇಟೆಯಾಡುವ ಉದ್ದೇಶಕ್ಕೆ ಮುಕ್ತವಾಗಿ ಬಳಸುತ್ತಿದ್ದ ಬಂದೂಕುಗಳನ್ನು ಬ್ರಿಟಿಷರಿಗೆ ಒಪ್ಪಿಸಲು ಸಿದ್ಧರಿರಲಿಲ್ಲ. ಬೇಡರು ತಮ್ಮ ಪರಂಪರಾನುಗತವಾದ ಹಕ್ಕನ್ನು ಉಳಿಸಿಕೊಳ್ಳುವ ಉದ್ದೇಶದಿಂದ ಬ್ರಿಟಿಷರ ವಿರುದ್ಧ ಸಿಡಿದೆದ್ದರು. ಈ ಹೋರಾಟದಲ್ಲಿ ಹಲಗಲಿಯ ಸುತ್ತಮುತ್ತಲಿನ ಪ್ರದೇಶಗಳಾದ ಮಂಟೂರು, ಬೋದಾನಿ, ಆಲಗುಂಡಿಯ ಬೇಡರು, ಹಲಗಲಿಯ ಬೇಡರೊಂದಿಗೆ ಸೇರಿಕೊಂಡರು. ಇವರ ಬಂಡಾಯವನ್ನು ಹತ್ತಿಕ್ಕಲು ನವೆಂಬರ್‌ನಲ್ಲಿ ಇಂಗ್ಲಿಷರ ಸೇನೆ ಹಲಗಲಿ ಗ್ರಾಮವನ್ನು ತಲುಪಿತು. ಬಂಡಾಯವೆದ್ದ ಬೇಡರನ್ನು ನಿಷ್ಕಾರುಣವಾಗಿ, ಅತ್ಯಂತ ದಮನಕಾರಿಯಾಗಿ ಇಂಗ್ಲಿಷರು ಹತ್ತಿಕ್ಕಿದರು. ಬಂಡಾಯಗಾರರನ್ನು ಗಲ್ಲಿಗೇರಿಸುವುದರ ಮೂಲಕ ಈ ಬಂಡಾಯವು ಕೊನೆಗೊಂಡಿತು.

## ಅಭ್ಯಾಸಗಳು

**I. ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಉತ್ತರಗಳಿಂದ ಭರ್ತಿಮಾಡಿ.**

1. ಮೊದಲನೆಯ ಆಂಗ್ಲೋ ಮೈಸೂರು ಯುದ್ಧ ________ ಮತ್ತು ________ರ ನಡುವೆ ನಡೆಯಿತು.
2. ಎರಡನೆಯ ಆಂಗ್ಲೋ ಮೈಸೂರು ಯುದ್ಧವು ______ ಒಪ್ಪಂದದೊಂದಿಗೆ ಕೊನೆಗೊಂಡಿತು.
3. ರಾಜ ಒಡೆಯರ್ ________ ಅನ್ನು ರಾಜಧಾನಿಯನ್ನಾಗಿ ಮಾಡಿಕೊಂಡರು.
4. ಕಿತ್ತೂರು ಚೆನ್ನಮ್ಮ ________ ಎಂಬ ಹುಡುಗನನ್ನು ದತ್ತು ಪಡೆದಿದ್ದಳು.
5. ಕಿತ್ತೂರು ಚೆನ್ನಮ್ಮನ ಸಂಸ್ಥಾನದ ರಾಯಣ್ಣನ ಊರು ________ .
6. ಸುರಪುರವು ಈಗಿನ ________ ಜಿಲ್ಲೆಯಲ್ಲಿದೆ.
7. ಈಗಿನ ಬಾಗಲಕೋಟೆ ಜಿಲ್ಲೆಯ ________ ಬೇಡರು ಬ್ರಿಟಿಷರ ವಿರುದ್ಧ ದಂಗೆಯೆದ್ದಿದ್ದರು.
8. ಅಮರ ಸುಳ್ಯ ಬಂಡಾಯವು ಮೂಲತಃ ________ ಬಂಡಾಯ

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿ.**

1. ಚಿಕ್ಕದೇವರಾಜ ಒಡೆಯರ್ ಅವರ ಸಾಧನೆಗಳಾವುವು?
2. ಹೈದರಾಲಿಯು ಹೇಗೆ ಅಧಿಕಾರಕ್ಕೆ ಬಂದನು?
3. ಎರಡನೆಯ ಆಂಗ್ಲೋ–ಮೈಸೂರು ಯುದ್ಧದಿಂದ ಉಂಟಾದ ಪರಿಣಾಮಗಳಾವುವು?
4. ಶ್ರೀರಂಗಪಟ್ಟಣ ಒಪ್ಪಂದದ ಷರತ್ತುಗಳು ಯಾವುವು?
5. ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದ ಸಾಧನೆಗಳನ್ನು ತಿಳಿಸಿ?
6. ನಾಲ್ಕನೆಯ ಆಂಗ್ಲೋ–ಮೈಸೂರು ಯುದ್ಧವು ಬ್ರಿಟಿಷರನ್ನು ಮೈಸೂರು ಪ್ರಾಂತ್ಯದಲ್ಲಿ ಭದ್ರಗೊಳಿಸಿತು. ವಿಮರ್ಶಿಸಿ.
7. ದೋಂಡಿಯಾ ವಾಘ್ ಬ್ರಿಟಿಷರ ವಿರುದ್ಧದ ಹೋರಾಟದಲ್ಲಿ ಹೋರಾಡಿದ ಕ್ರಮವನ್ನು ವಿಶ್ಲೇಷಿಸಿ.
8. ಸಂಗೊಳ್ಳಿ ರಾಯಣ್ಣನು ಸ್ವಾತಂತ್ರ್ಯ ಹೋರಾಟದಲ್ಲಿ ಹೋರಾಡಿದ ಕ್ರಮವನ್ನು ವಿವರಿಸಿ.
9. ಸ್ವಾತಂತ್ರ್ಯ ಹೋರಾಟದಲ್ಲಿ ಕೊಡಗಿನ ಪ್ರಾಂತ್ಯದಿಂದ ಪುಟ್ಟಬಸಪ್ಪನ ಪಾತ್ರವನ್ನು ವಿವರಿಸಿ.
10. ಸುರಪುರದ ದಂಗೆಯನ್ನು ಸಂಕ್ಷಿಪ್ತವಾಗಿ ವಿವರಿಸಿ.

©KTBS NOT TO BE REPUBLISHED

**III. ಚಟುವಟಿಕೆಗಳು :**

1. ಸಂಗೊಳ್ಳಿ ರಾಯಣ್ಣನ ಕುರಿತಾದ ಪುಸ್ತಕಗಳನ್ನು ಓದಿ.
2. ಕಿತ್ತೂರು ಚೆನ್ನಮ್ಮಳ ಕುರಿತಾದ ಹೆಚ್ಚಿನ ವಿಚಾರಗಳನ್ನು ಸಂಗ್ರಹಿಸಿರಿ.

**IV. ಯೋಜನೆಗಳು :**

1. ಶೈಕ್ಷಣಿಕ ಪ್ರವಾಸ ಕೈಗೊಂಡು ಸುರಪುರದಲ್ಲಿರುವ ಕೋಟೆಗೆ ಭೇಟಿ ನೀಡಿ ಅಲ್ಲಿರುವ ಬ್ರಿಟಿಷರ ಕಾಲದ ಅತಿಥಿ ಗೃಹದ ವಿಶೇಷತೆಯನ್ನು ಗಮನಿಸಿ.
2. ಮೈಸೂರು ಅರಮನೆಯ ಬಗ್ಗೆ ವಿಷಯ ಸಂಗ್ರಹಿಸಿ.

* * * *

@KTBS
NOT TO BE REPUBLISHED

# ಅಧ್ಯಾಯ – 5
# ಸಾಮಾಜಿಕ ಮತ್ತು ಧಾರ್ಮಿಕ ಸುಧಾರಣಾ ಚಳುವಳಿಗಳು

S5G9U3

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಬ್ರಹ್ಮ ಸಮಾಜದ ಸ್ಥಾಪನೆ ಮತ್ತು ಸುಧಾರಣೆಗಳು
- ಪ್ರಾರ್ಥನಾ ಸಮಾಜದ ಸುಧಾರಣೆಗಳು
- ಆಲಿಘರ್ ಚಳುವಳಿ
- ಆರ್ಯ ಸಮಾಜದ ಸ್ಥಾಪನೆ ಮತ್ತು ಸುಧಾರಣೆಗಳು
- ಸತ್ಯಶೋಧಕ ಸಮಾಜದ ಪ್ರತಿಪಾದನೆಗಳು
- ರಾಮಕೃಷ್ಣ ಮಿಷನ್‌ನ ಬೋಧನೆಗಳು

ಭಾರತದ ಇತಿಹಾಸದಲ್ಲಿ 19ನೆಯ ಶತಮಾನವನ್ನು 'ಭಾರತೀಯ ಪುನರುಜ್ಜೀವನ' ಕಾಲವೆಂದು ಕರೆಯಲಾಗಿದೆ. ಈ ಕಾಲಾವಧಿಯಲ್ಲಿ ಪಾಶ್ಚಾತ್ಯ ನಾಗರೀಕತೆಯ ಸಂಪರ್ಕವು ಭಾರತೀಯರಿಗೆ ದೊರೆಯಿತು. ಈ ಅವಕಾಶದಿಂದ ಇಂಗ್ಲಿಷ್ ವಿದ್ಯಾಭ್ಯಾಸದ ಸೌಲಭ್ಯ ದೊರೆಯಿತು. ಭಾರತೀಯರಲ್ಲಿ ವೈಚಾರಿಕತೆಯ ಮನೋಭಾವ ಬೆಳೆಯಿತು. ಇದು ಮೂಢನಂಬಿಕೆಗಳನ್ನು ಪ್ರಶ್ನಿಸಲು ಪ್ರೇರೇಪಿಸಿತಲ್ಲದೆ ದ್ವಂದ್ವ, ವಿರೋಧಾಭಾಸ ಹಾಗೂ ಸ್ವಹಿತಾಸಕ್ತಿಗಳ ಅರಿವು ಮೂಡಿಸಿತು. ಇಂಗ್ಲಿಷ್ ಪೂರ್ವಕಾಲದಲ್ಲಿಯೂ ಭಾರತೀಯರಿಗೆ ಇಂಗ್ಲಿಷ್ ಭಾಷೆಯ ಹೊರತಾಗಿಯೂ ವೈಜ್ಞಾನಿಕ ಮನೋಭಾವ, ವೈಚಾರಿಕತೆ ಇತ್ತು ಎಂದು ಇತ್ತೀಚಿನ ಸಂಶೋಧಕರು ಅಭಿಪ್ರಾಯಪಟ್ಟಿದ್ದಾರೆ.

ಭಾರತೀಯರಲ್ಲಿ ಪ್ರಜಾಪ್ರಭುತ್ವ, ಸ್ವಾತಂತ್ರ್ಯ, ಸಮಾನತೆ, ರಾಷ್ಟ್ರೀಯತೆಯಂತಹ ವಿಚಾರಗಳನ್ನು ಪಾಶ್ಚಾತ್ಯ ಪರಿಕಲ್ಪನೆಗಳು ಪರಿಚಯಿಸಿದವು. ಪಾಶ್ಚಾತ್ಯ ಶಿಕ್ಷಣದಿಂದ ಜಾಗೃತರಾದ ಅನೇಕರು ಸುಧಾರಣೆಗಾಗಿ ಪ್ರಯತ್ನಿಸಿದರು. ಈ ಹಿನ್ನೆಲೆಯಲ್ಲಿ ರಾಮ್ ಮೋಹನರಾಯ್, ದಯಾನಂದ ಸರಸ್ವತಿ, ಮಹದೇವ ಗೋವಿಂದ ರಾನಡೆ, ಜ್ಯೋತಿಬಾ ಫುಲೆ, ಸ್ವಾಮಿ ವಿವೇಕಾನಂದ, ಆನಿಬೆಸೆಂಟ್, ಸೈಯದ್ ಅಹಮದ್‌ಖಾನ್ ಮೊದಲಾದವರು ಸಾಮಾಜಿಕ ಸುಧಾರಣೆಗಾಗಿ ಶ್ರಮಿಸಿದರು.

**ನಿಮಗಿದು ತಿಳಿದಿರಲಿ :**

ಪಾಶ್ಚಾತ್ಯ ವಿದ್ವಾಂಸರಿಂದ ಪ್ರಭಾವಕ್ಕೆ ಒಳಗಾದ ಇಂಗ್ಲಿಷ್ ಮತ್ತು ಭಾರತೀಯ ವಿದ್ವಾಂಸರು 19ನೆಯ ಶತಮಾನದ ಕಾಲವನ್ನು 'ಪುನರುಜ್ಜೀವನ' ಕಾಲವೆಂದು ಕರೆದರು. ಯುರೋಪಿಯನ್ ಚರಿತ್ರೆ ರಚನೆ ಸಂದರ್ಭದಲ್ಲಿ ಇದ್ದ ಮಾನದಂಡಗಳನ್ನು ಭಾರತೀಯರನ್ನು ಕುರಿತು ನಡೆಸಿದ ಅಧ್ಯಯನಗಳಲ್ಲಿಯೂ ಈ ವಿದ್ವಾಂಸರು ಅನುಸರಿಸಿದರು.

ಯುರೋಪಿಗೆ 'ಪುನರುಜ್ಜೀವನ' ಕಾಲ ಇದ್ದರೆ ಅಂತಹದೊಂದು ಕಾಲ ಭಾರತೀಯ ಚರಿತ್ರೆ ಬರೆಯುವಾಗಲೂ ಬೇಕು ಎನ್ನುವ ಮನೋಭಾವ ಆ ಕಾಲದ ಬರಹಗಾರರಲ್ಲಿ ಪ್ರಬಲವಾಗಿತ್ತು. ಇತ್ತೀಚಿನ ಸಂಶೋಧನೆಗಳು ಈ ಅಂಶವನ್ನು ಸ್ಪಷ್ಟಪಡಿಸಿವೆ. ಆದರೂ ಚರಿತ್ರೆ ಬರವಣಿಗೆಯಲ್ಲಿ ಬೇರೂರಿರುವ ಕೆಲವು ಸೈದ್ಧಾಂತಿಕತೆಗಳು ಇಂದಿಗೂ ಭಾರತೀಯ ಚರಿತ್ರೆ ರಚನೆಯನ್ನು ಪ್ರಭಾವಿಸಿವೆ.

**ಬ್ರಹ್ಮ ಸಮಾಜ**

ಬ್ರಹ್ಮ ಸಮಾಜದ ಸಂಸ್ಥಾಪಕರಲ್ಲಿ ರಾಮಮೋಹನ್ ರಾಯರು ಪ್ರಮುಖರು. ಇವರನ್ನು 'ಭಾರತೀಯ ನವೋದಯದ ಜನಕ' ಎಂದು ಕರೆಯಲಾಗಿದೆ. ಸಂಸ್ಕೃತ, ಅರೇಬಿಕ್, ಪರ್ಷಿಯನ್, ಇಂಗ್ಲಿಷ್, ಫ್ರೆಂಚ್, ಗ್ರೀಕ್, ಲ್ಯಾಟಿನ್ ಮುಂತಾದ ಭಾಷೆಗಳಲ್ಲಿ ಪಾಂಡಿತ್ಯವನ್ನು ಹೊಂದಿದ್ದರು. ಹಿಂದೂ, ಮುಸ್ಲಿಂ, ಸೂಫಿ, ಕ್ರೈಸ್ತ ಮತ್ತು ಬೌದ್ಧಮತಗಳ ಸಂಸ್ಕೃತಿ ಮತ್ತು ತತ್ವಗಳನ್ನು ಅಧ್ಯಯನ ಮಾಡಿದ್ದರು. ಮೂರ್ತಿ ಪೂಜೆಯನ್ನು ಪ್ರಶ್ನಿಸಿದ ರಾಯರು ತಮ್ಮ ಸಿದ್ಧಾಂತಗಳ ಪ್ರತಿಪಾದನೆಗಾಗಿ ಉಪನಿಷತ್ತುಗಳನ್ನು ಮುಂದು ಮಾಡಿದರು. ಆಧುನಿಕ ವಿಜ್ಞಾನ ಮತ್ತು ಇಂಗ್ಲಿಷ್ ಶಿಕ್ಷಣವು ಭಾರತದ ನವೀಕರಣಕ್ಕೆ ಅತ್ಯಾವಶ್ಯಕವೆಂದು ಪ್ರತಿಪಾದಿಸಿದರು. ಸ್ತ್ರೀ ಶೋಷಣೆಯನ್ನು ಅವರು ವಿರೋಧಿಸಿದರು. ಸತಿಪದ್ಧತಿ, ಬಾಲ್ಯವಿವಾಹಗಳ ವಿರುದ್ಧ ಸಂಘಟನಾತ್ಮಕವಾದ ಹೋರಾಟ ನಡೆಸಿದರು. ಇದರಿಂದಾಗಿ ಇವರನ್ನು ಸಂಪ್ರದಾಯವಾದಿ ಹಿಂದೂಗಳು

NOT TO BE REPUBLISHED ©KTBS

ಖಂಡಿಸಿದರು. ಲಾರ್ಡ್ ವಿಲಿಯಂ ಬೆಂಟಿಂಕ್ ಜಾರಿಗೆ ತಂದಿದ್ದ ಸತಿಸಹಗಮನ ಪದ್ಧತಿ ವಿರುದ್ಧದ ಕಾಯ್ದೆಯನ್ನು ಬೆಂಬಲಿಸಿದರು. ಇವರು ಪತ್ರಿಕೋದ್ಯಮದ ಮೂಲಕ ಜನರಲ್ಲಿ ವೈಚಾರಿಕತೆಯನ್ನು ಬೆಳೆಸಲು ಪ್ರಯತ್ನಿಸಿದರು. ಬಂಗಾಳಿ ಭಾಷೆಯಲ್ಲಿ 'ಸಂವಾದ ಕೌಮುದಿ' ಎನ್ನುವ ಪತ್ರಿಕೆಯನ್ನು ಆರಂಭಿಸಿದರು.



ರಾಮ್ ಮೋಹನ್‌ರಾಯ್

ಬ್ರಹ್ಮ ಸಮಾಜವು 19ನೆಯ ಶತಮಾನದಲ್ಲಿ ಸಾಮಾಜಿಕ ಧಾರ್ಮಿಕ ಸುಧಾರಣೆಯ ಮಂಚೂಣಿಯಲ್ಲಿದ್ದ ಸಂಸ್ಥೆಯಾಗಿತ್ತು. ಬ್ರಹ್ಮಸಮಾಜವು ಹಿಂದೂ ಧರ್ಮದಲ್ಲಿದ್ದ ಆಚಾರ-ವಿಚಾರಗಳ ಸುಧಾರಣೆಗಾಗಿ ಪ್ರಯತ್ನಿಸಿತು. ವಿಗ್ರಹಾರಾಧನೆ ಮತ್ತು ಬಹುದೇವತಾ ಆರಾಧನೆಯನ್ನು ವಿರೋಧಿಸಿ ಏಕದೇವತಾ ಆರಾಧನೆಯನ್ನು ಪ್ರೋತ್ಸಾಹಿಸಿತು. ಅದು ಯಜ್ಞಯಾಗಾದಿಗಳನ್ನು ಖಂಡಿಸಿತು.

**ಚಟುವಟಿಕೆ :**
ಬಾಲ್ಯವಿವಾಹದ ನಿರ್ಮೂಲನೆಗೆ ಸರ್ಕಾರದ ಕ್ರಮಗಳನ್ನು ಪಟ್ಟಿ ಮಾಡಿ

ಇಂಗ್ಲಿಷ್ ಶಿಕ್ಷಣದ ಮೂಲಕ ಭಾರತೀಯರು ಪಾಶ್ಚಾತ್ಯ ರಾಜಕೀಯ ಚಿಂತನೆಯನ್ನು ತಿಳಿಯಲು ಸಾಧ್ಯವಾಗಿ ಅದು ಭಾರತೀಯರಲ್ಲಿ ರಾಷ್ಟ್ರಪ್ರಜ್ಞೆಯನ್ನು ಜಾಗೃತಗೊಳಿಸಲು ಸಹಾಯಮಾಡಿತು.

**ಆರ್ಯಸಮಾಜ**



ಸ್ವಾಮಿ ದಯಾನಂದ ಸರಸ್ವತಿ

ಆರ್ಯಸಮಾಜವನ್ನು ದಯಾನಂದ ಸರಸ್ವತಿಯವರು ಸ್ಥಾಪಿಸಿದರು. ಇವರು ದೇಶಾದ್ಯಂತ ಉಪನ್ಯಾಸ ನೀಡುತ್ತಾ ವೇದಗಳು ಸತ್ಯ ಮತ್ತು ಜ್ಞಾನದ ಮೂಲವೆಂದರು. ಈ ಹಿನ್ನೆಲೆಯಲ್ಲಿ 'ವೇದಗಳಿಗೆ ಹಿಂದಿರುಗಿ' ಎನ್ನುವ ಘೋಷಣೆ ಮಾಡಿದರು. ವಿಗ್ರಹಾರಾಧನೆ, ಜಾತಿಪದ್ಧತಿಯನ್ನು ಖಂಡಿಸಿದರು. ಜಾತಿಯು ಯೋಗ್ಯತೆಯಿಂದ ಹೊರತು, ಹುಟ್ಟಿನಿಂದಲ್ಲ ಎಂದು ಪ್ರತಿಪಾದಿಸಿದರು. ಅನೇಕ ಅರ್ಥಹೀನ ಪದ್ಧತಿಗಳನ್ನು ತಿರಸ್ಕರಿಸಿದರು. ವಿಧವಾ ವಿವಾಹವನ್ನು ಪ್ರೋತ್ಸಾಹಿಸಿದರು. ಸ್ವದೇಶಿ ವಸ್ತುಗಳ ಬಳಕೆಗೆ ಕರೆನೀಡಿದರು. 'ಸತ್ಯಾರ್ಥ ಪ್ರಕಾಶ' ಎಂಬ ಕೃತಿಯಲ್ಲಿ ತಮ್ಮ ವಿಚಾರಗಳನ್ನು ಪ್ರತಿಪಾದಿಸಿದ್ದಾರೆ. 'ಶುದ್ಧಿಚಳುವಳಿ' ಆರ್ಯಸಮಾಜದ ಪ್ರಮುಖ ಚಟುವಟಿಕೆಯಾಗಿತ್ತು. ನಂತರದಲ್ಲಿ ಆರ್ಯಸಮಾಜವು ಅನೇಕ ಸ್ಥಳಗಳಲ್ಲಿ ಶಾಲಾ ಕಾಲೇಜುಗಳನ್ನು ಸ್ಥಾಪಿಸಿತು. ದಯಾನಂದ ಸರಸ್ವತಿಯವರ, ಸ್ವರಾಜ್ಯ ಮತ್ತು ಸ್ವಧರ್ಮ ಬೋಧನೆಗಳು ಭಾರತೀಯರು ಸ್ವಾತಂತ್ರ್ಯ ಹೋರಾಟದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡಿದವು. ಮಹಾನ್ ದೇಶಭಕ್ತರಾದ ದಯಾನಂದ ಸರಸ್ವತಿಯವರು ದೇಶ ಮತ್ತು ಭಾರತೀಯ ಸಂಸ್ಕೃತಿಯ ಅಭಿಮಾನಿಗಳಾಗಿದ್ದರು. ಸ್ವಾಭಿಮಾನ ಮತ್ತು ಸ್ವಾವಲಂಬನೆಯನ್ನು ಜನರಲ್ಲಿ ಮೂಡಿಸಲು ಪ್ರಯತ್ನಿಸಿದರು ಹಾಗೂ "ಭಾರತೀಯರಿಗೇ ಭಾರತ" ಎಂಬ ಘೋಷಣೆಯನ್ನು ನೀಡಿದರು.

**ನಿಮಗಿದು ತಿಳಿದಿರಲಿ :**

**ಶುದ್ಧಿ ಚಳುವಳಿ :**

ಹಿಂದೂ ಧರ್ಮದಲ್ಲಿದ್ದ ಜಾತಿವ್ಯವಸ್ಥೆ ಮತ್ತು ಕಂದಾಚಾರಗಳು ಜನರನ್ನು ಅನ್ಯಧರ್ಮದೆಡೆಗೆ ನೂಕಿದ್ದವು. ಇಂತಹ ಸಂದಿಗ್ಧ ಸಂದರ್ಭದಲ್ಲಿ ಹಿಂದೂ ಸಮಾಜವನ್ನು ಒಗ್ಗೂಡಿಸುವ ನಿಟ್ಟಿನಲ್ಲಿ ವೇದಗಳನ್ನು ಮರು ವ್ಯಾಖ್ಯಾನಿಸಿ, ಲಿಂಗ ಮತ್ತು ಜಾತಿ ಸಮಾನತೆಯನ್ನು ಪ್ರತಿಪಾದಿಸಿದರು. ಹಿಂದೂ ಧರ್ಮದಿಂದ ಹೊರಹೋಗುವ ಅವಕಾಶವಿತ್ತೇ ಹೊರತು ಒಳಗೆ ಬರುವ ಅವಕಾಶಗಳೇ ಇರಲಿಲ್ಲ. ಈ ಹಿನ್ನೆಲೆಯಲ್ಲಿ ಮತಾಂತರಗೊಂಡಿದ್ದ ಜನರನ್ನು ಮತ್ತೆ ಹಿಂದೂ ಧರ್ಮದ ತೆಕ್ಕೆಗೆ ತಂದುಕೊಳ್ಳಲು ದಯಾನಂದ ಸರಸ್ವತಿಯವರು ಶುದ್ಧಿ ಚಳುವಳಿಯನ್ನು ಪ್ರಾರಂಭಿಸಿದರು. ಮತಾಂತರಗೊಂಡವರನ್ನು ಶುದ್ಧಿ ಮಾಡಿ ಮತ್ತೆ ಹಿಂದೂ ಧರ್ಮಕ್ಕೆ ತಂದುಕೊಳ್ಳುವುದರ ಮೂಲಕ ಹಿಂದೂ ಧರ್ಮವನ್ನು ಗಟ್ಟಿಗೊಳಿಸಿದರು.


©KTBS NOT TO BE REPUBLISHED

## ಪ್ರಾರ್ಥನಾ ಸಮಾಜ

ಪ್ರಾರ್ಥನಾ ಸಮಾಜವನ್ನು ಆತ್ಮಾರಾಂ ಪಾಂಡುರಂಗರವರು ಮುಂಬೈನಲ್ಲಿ ಸ್ಥಾಪಿಸಿದರು. ಮಾನವನ ಸೇವೆಯೇ ಪರಮಾತ್ಮನ ಸೇವೆ ಎಂಬುದು ಇದರ ನೆಲೆಗಟ್ಟಾಗಿತ್ತು. ಈ ಸಮಾಜವು ಶಿಕ್ಷಣ ಪ್ರಸಾರಕ್ಕೆ ಹೆಚ್ಚಿನ ಆದ್ಯತೆ ನೀಡಿತು. ಡೆಕ್ಕನ್ ಶಿಕ್ಷಣ ಸಂಸ್ಥೆಯ ಮೂಲಕ ಶಿಕ್ಷಣ ಕ್ಷೇತ್ರದ ಪ್ರಗತಿಗೆ ಪ್ರಯತ್ನಿಸಿತು. ವಿಧವಾ ವಿವಾಹ, ಸ್ತ್ರೀ ಶಿಕ್ಷಣ, ಅಂತರ್ಜಾತಿ ವಿವಾಹ, ಸಹಭೋಜನ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸಿ ಬಾಲ್ಯವಿವಾಹ, ಜಾತಿಪದ್ಧತಿ, ವಿಗ್ರಹಾರಾಧನೆ, ಪರ್ದಾಪದ್ಧತಿಯನ್ನು ವಿರೋಧಿಸಿತು. ಸರ್ವಧರ್ಮಗಳು ಸತ್ಯದ ಪ್ರತೀಕವಾಗಿದ್ದು ಅವುಗಳನ್ನು ಗೌರವಿಸಬೇಕೆಂದರು. ಭಾರತದ ಪುನರುಜ್ಜೀವನ ಚಳುವಳಿಯ ಕಾಲದಲ್ಲಿ ಅನಾಥಾಲಯಗಳು, ರಾಷ್ಟ್ರೀಯ ಶಾಲೆಗಳು ಮತ್ತು ವಿಧವಾಶ್ರಮಗಳನ್ನು ಸ್ಥಾಪಿಸಲಾಯಿತು.

ಎಂ.ಜಿ. ರಾನಡೆಯವರು ಪ್ರಾರ್ಥನಾ ಸಮಾಜವನ್ನು ಜನಪ್ರಿಯಗೊಳಿಸಿದರು. ಸಮಾಜವನ್ನು ಸುಧಾರಿಸದೆ ರಾಜಕೀಯ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ಪ್ರಗತಿಯನ್ನು ಸಾಧಿಸುವುದು ಅಸಾಧ್ಯವೆಂದರು. ಹಿಂದೂ, ಮುಸ್ಲಿಂ ಏಕತೆಯ ಪ್ರತಿಪಾದಕರಾಗಿದ್ದರು. ರಾನಡೆಯವರು ರಾಷ್ಟ್ರೀಯ ಕಾಂಗ್ರೆಸ್‌ನಲ್ಲಿ ಸಕ್ರಿಯರಾಗಿದ್ದರು. ಇವರು ಹೆಣ್ಣುಮಕ್ಕಳ ಶಿಕ್ಷಣಕ್ಕಾಗಿ ಪ್ರೌಢಶಾಲೆಯನ್ನು ತೆರೆದರು.


## ಸತ್ಯಶೋಧಕ ಸಮಾಜ


ಮಹಾತ್ಮ ಜ್ಯೋತಿಭಾ ಫುಲೆ

ಸತ್ಯಶೋಧಕ ಸಮಾಜದ ಸ್ಥಾಪಕರು ಜ್ಯೋತಿಭಾ ಫುಲೆರವರು. ಸ್ವಾತಂತ್ರ್ಯ ಪ್ರತಿಯೊಬ್ಬ ಮನುಷ್ಯನ ಪ್ರಥಮ ಅವಶ್ಯಕತೆ. ಸ್ವಾತಂತ್ರ್ಯವಿಲ್ಲದಿದ್ದರೆ ವಿಚಾರಗಳನ್ನು ಅಭಿವ್ಯಕ್ತಗೊಳಿಸಲು ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದರು. ಸತ್ಯಶೋಧಕ ಸಮಾಜವು ಪಾನನಿಷೇಧವನ್ನು ಒತ್ತಾಯಿಸಿತು. ಸ್ತ್ರೀಪುರುಷರ ಅಸಮಾನತೆ, ಮಾನವ ಹಕ್ಕುಗಳ ನಿರಾಕರಣೆ, ಜನರನ್ನು ಶೋಷಿಸುವುದು, ಅಸ್ಪೃಶ್ಯತಾ ಆಚರಣೆಗಳನ್ನು ವ್ಯಾಪಕವಾಗಿ ವಿರೋಧಿಸಿತು. ಸಾಮಾಜಿಕ ನ್ಯಾಯಕ್ಕಾಗಿ ಚಳುವಳಿಯನ್ನು ನಡೆಸಿತು. ವಿದ್ಯಾರ್ಥಿನಿಯರ ಶಿಕ್ಷಣಕ್ಕಾಗಿ ಶಾಲೆ ತೆರೆದರು. ಶೂದ್ರರು ಅನುಭವಿಸುತ್ತಿದ್ದ ಗುಲಾಮಗಿರಿಯನ್ನು ಹಾಗೂ ಅದಕ್ಕೆ ಕಾರಣರಾದವರನ್ನು ಉಗ್ರವಾಗಿ ಖಂಡಿಸಿತು. ಸಮಾಜದ ವ್ಯವಸ್ಥೆಯ ಸುಧಾರಣೆಗಾಗಿ ಉಚಿತ ಮತ್ತು ಕಡ್ಡಾಯ ಶಿಕ್ಷಣವನ್ನು ಪ್ರತಿಪಾದಿಸಿತು. ಸತ್ಯಶೋಧಕ ಸಮಾಜದಿಂದ ಪ್ರಭಾವಿತರಾದ ಶಾಹು ಮಹಾರಾಜರು ಹಲವಾರು ಶಾಖೆಗಳನ್ನು ತೆರೆದು ಕಾರ್ಯ ಚಟುವಟಿಕೆಗಳನ್ನು ನಡೆಸಿದರು. ಸಮಾಜವು ರೈತಪರವಾದ ಹೋರಾಟಗಳನ್ನು ನಡೆಸಿತು. ಫುಲೆಯವರು ಶೋಷಣೆಯ ಬಗ್ಗೆ 'ಗುಲಾಮಗಿರಿ' ಪುಸ್ತಕದಲ್ಲಿ ತಿಳಿಸಿಕೊಡುತ್ತಾರೆ. ಫುಲೆಯವರ ಪತ್ನಿಯಾದ ಸಾವಿತ್ರಿಬಾಯಿ ಫುಲೆಯವರೂ ಕೂಡಾ ಮಹಿಳಾ ಶಿಕ್ಷಣಕ್ಕಾಗಿ ಸತ್ಯಶೋಧಕ ಸಮಾಜದ ಮೂಲಕ ಪ್ರಯತ್ನ ನಡೆಸಿದರು. ನಂತರದ ಕಾಲಘಟ್ಟದಲ್ಲಿ ಡಾ. ಬಿ.ಆರ್. ಅಂಬೇಡ್ಕರ್‌ರವರು ಫುಲೆಯವರ ತತ್ವಗಳಿಂದ ಪ್ರಭಾವಿತರಾದರು.

> **ಚಟುವಟಿಕೆ :**
> ಸ್ತ್ರೀ ಶಿಕ್ಷಣಕ್ಕಾಗಿ ಕರ್ನಾಟಕ ಸರ್ಕಾರವು ರೂಪಿಸಿರುವ ಯೋಜನೆಗಳನ್ನು ಶಿಕ್ಷಕರಿಂದ ತಿಳಿಯಿರಿ.

## ಆಲಿಘರ್ ಚಳುವಳಿ


ಸರ್ ಸಯ್ಯದ್ ಅಹಮದ್ ಖಾನ್

ಮುಸಲ್ಮಾನರು ರಾಜಕೀಯ, ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ತಾತ್ವಿಕ ವಿಚಾರಗಳನ್ನು ಬದಲಿಸಿಕೊಂಡು ಪೂರ್ವ ಪಶ್ಚಿಮಗಳ ವಿಚಾರಗಳ ಸಂಗಮಕ್ಕೆ ಬೆಂಬಲಿಸುವುದು ಆಲಿಘರ್ ಚಳುವಳಿಯ ಉದ್ದೇಶವಾಗಿತ್ತು. ಈ ಚಳುವಳಿಯ ನಾಯಕತ್ವವನ್ನು ಸರ್ ಸೈಯದ್ ಅಹಮದ್‌ಖಾನ್‌ರವರು ವಹಿಸಿದ್ದರು. ಮುಸ್ಲಿಂ ಸಮುದಾಯಕ್ಕೆ ಆಧುನಿಕ ಶಿಕ್ಷಣ ನೀಡುವ ಉದ್ದೇಶದಿಂದಾಗಿ 'ಆಂಗ್ಲೋ–ಓರಿಯಂಟಲ್' ಕಾಲೇಜನ್ನು ಪ್ರಾರಂಭಿಸಿದರು. ಇದು ಮುಂದೆ ಆಲಿಘರ್ ಮುಸ್ಲಿಂ ವಿಶ್ವವಿದ್ಯಾನಿಲಯ ಎಂದು ಹೆಸರು ಪಡೆಯಿತು. ಪಾಶ್ಚಾತ್ಯ ಶಿಕ್ಷಣದೊಂದಿಗೆ ಧಾರ್ಮಿಕ ಶಿಕ್ಷಣವನ್ನು ಸಹ ನೀಡುವುದು ಇದರ ಉದ್ದೇಶವಾಗಿತ್ತು. ಪಾಶ್ಚಾತ್ಯ ಶಿಕ್ಷಣದಿಂದ ನವೀಕೃತ ಸಮಾಜದ

© KTBS NOT TO BE REPUBLISHED

ನಿರ್ಮಾಣವು ಸಾಧ್ಯ ಎಂದು ಅವರು ನಂಬಿದ್ದರು. ಸರ್ ಸೈಯದ್‌ರವರು ರಾಷ್ಟ್ರೀಯ ಕಾಂಗ್ರೆಸ್‌ನಿಂದ ದೂರವೇ ಉಳಿದು ಮುಸಲ್ಮಾನ ಸಮುದಾಯವನ್ನು ಒಗ್ಗೂಡಿಸಿದರು. ಸ್ತ್ರೀಯರ ಶಿಕ್ಷಣವನ್ನು ಬೆಂಬಲಿಸಿ ಬಹುಪತ್ನಿತ್ವವನ್ನು ಹಾಗೂ ವಿಧವಾ ವಿವಾಹದ ವಿರುದ್ಧದ ವಿಚಾರಗಳನ್ನು ಖಂಡಿಸಿದರು.

## ರಾಮಕೃಷ್ಣ ಮಿಷನ್



ರಾಮಕೃಷ್ಣ ಪರಮಹಂಸ

ರಾಮಕೃಷ್ಣ ಪರಮಹಂಸರು ಬಂಗಾಳದ ದಕ್ಷಿಣೇಶ್ವರದಲ್ಲಿನ ಕಾಳಿದೇವಾಲಯದ ಅರ್ಚಕರಾಗಿದ್ದರು. ಅವರ ಚಿಂತನೆಯು ಭಾರತೀಯ ಸಂಸ್ಕೃತಿಯ ಆಧಾರವಾಗಿತ್ತು. ಅವರ ಪ್ರಕಾರ ಎಲ್ಲಾ ಪಂಥಗಳು ಸಮಾನ, ಯಾವ ದೇವರು, ಪಂಥ ಮುಖ್ಯ ಅನ್ನುವುದಕ್ಕಿಂತಲೂ ಆಧ್ಯಾತ್ಮದ ಸಾಕ್ಷಾತ್ಕಾರವು ಮುಖ್ಯವಾದುದೆಂದು ಅವರು ನಂಬಿದ್ದರು. ಅವರು ವಿಗ್ರಹಾರಾಧನೆಯಲ್ಲಿ ನಂಬಿಕೆ ಹೊಂದಿದ್ದರು. ಅವರು ನಿಸ್ವಾರ್ಥ ದೈವಭಕ್ತಿಯನ್ನು ಹೊಂದಿದ್ದರು. ಸ್ವಾಮಿ ವಿವೇಕಾನಂದರು ರಾಮಕೃಷ್ಣ ಪರಮಹಂಸರ ಆತ್ಮೀಯ ಶಿಷ್ಯರಾಗಿದ್ದರು.

ಸ್ವಾಮಿ ವಿವೇಕಾನಂದರು ತಮ್ಮ ಗುರುಗಳಾದ ರಾಮಕೃಷ್ಣ ಪರಮಹಂಸರ ಧ್ಯೇಯಾದರ್ಶಗಳನ್ನು ಪ್ರಚಾರ ಪಡಿಸಲು ರಾಮಕೃಷ್ಣ ಮಿಷನ್‌ನನ್ನು ಸ್ಥಾಪಿಸಿದರು. ಸರ್ವಧರ್ಮ ಸಮನ್ವಯ ತತ್ವವನ್ನು ಪ್ರಚಾರ ಮಾಡುವುದು ಮತ್ತು ಅನುಷ್ಠಾನಗೊಳಿಸುವುದು ಇದರ ಉದ್ದೇಶವಾಗಿತ್ತು. ರಾಮಕೃಷ್ಣಾಶ್ರಮಗಳು ಜಗತ್ತಿನೆಲ್ಲೆಡೆ ಶಾಖೆಗಳನ್ನು ಹೊಂದಿವೆ. ಇವುಗಳಲ್ಲಿ ಪ್ರಾಚೀನ ಆಧುನಿಕ ಮತ್ತು ಪಾಶ್ಚಾತ್ಯ ತತ್ವಜ್ಞಾನಿಗಳ ಮಿಲನವನ್ನು ಗಮನಿಸಬಹುದು.



ಸ್ವಾಮಿ ವಿವೇಕಾನಂದರು

ಸ್ವಾಮಿ ವಿವೇಕಾನಂದರು ಜೀವನ ಪ್ರೀತಿಯಲ್ಲಿರುವ ಮಹತ್ವವನ್ನು ತೆರೆದಿಟ್ಟು ಭಾರತೀಯರನ್ನು ಎಚ್ಚರಗೊಳಿಸಿದ ಕ್ರಾಂತಿಕಾರಿ ಸನ್ಯಾಸಿ. ವ್ಯಕ್ತಿ ಮತ್ತು ವ್ಯಕ್ತಿಯ ಇರುವಿಕೆಗೆ ಮತ್ತು ಸಾಮರ್ಥ್ಯಕ್ಕೆ ಮಹತ್ವ ನೀಡಬಯಸಿದರು. ಮೋಕ್ಷಕ್ಕಾಗಿ ದುಡಿಯಲು ಪ್ರಾರ್ಥನೆ, ಯೋಗ ಸಾಧನೆಗಳಲ್ಲದೆ ಸಮಾಜ ಸೇವೆಯು ಮುಖ್ಯವೆಂದರು. ರಾಮಕೃಷ್ಣಾಶ್ರಮವು ಶಿಕ್ಷಣ ಮತ್ತು ಸಮಾಜಸೇವೆಯ ಮೂಲಕ ಸಂಸ್ಕೃತಿಯ ಬೆಳವಣಿಗೆಯನ್ನು ಮುಂದುವರಿಸುತ್ತಿದೆ. ವಿವೇಕಾನಂದರ ಚಿಂತನೆಗಳಿಂದ ಗಾಂಧೀಜಿಯವರು ಸೇರಿದಂತೆ ಅನೇಕ ರಾಷ್ಟ್ರನಾಯಕರು ಪ್ರೇರಣೆಗೊಂಡರು.

1893ರಲ್ಲಿ ಸ್ವಾಮಿ ವಿವೇಕಾನಂದರು ಚಿಕಾಗೋ ವಿಶ್ವಧರ್ಮ ಸಮ್ಮೇಳನದಲ್ಲಿ ಸರ್ವಧರ್ಮ ಸಹಿಷ್ಣುತೆ, ಸಕಲಧರ್ಮಗಳು ಸತ್ಯ ಎಂದು ಪ್ರತಿಪಾದಿಸಿ ಭಾರತದ ಹಿರಿಮೆಯನ್ನು ಜಗತ್ತಿಗೇ ಸಾರಿದರು. ದಮನಕಾರಿ ರಿಲಿಜನ್‌ಗಳಿಗೆ ಅಪವಾದವೆಂಬಂತೆ ಹಿಂದೂ ಧರ್ಮವು ಹೇಗೆ ವಿಶ್ವಭ್ರಾತೃತ್ವವನ್ನು ಸಾರಿದೆ ಎಂಬುದನ್ನು ವಿವರಿಸಿ ಭಾರತೀಯ ಸಂಸ್ಕೃತಿಯನ್ನು ವಿಶ್ವಕ್ಕೆ ಪರಿಚಯಿಸಿದರು. ಇವರು ಯುವಕರಿಗೆ ಪ್ರೇರಕಶಕ್ತಿಯಾಗಿದ್ದರು.

## ಥಿಯಾಸಾಫಿಕಲ್ ಸೊಸೈಟಿ (ಬ್ರಹ್ಮ ವಿದ್ಯಾ ಸಮಾಜ)



ಆನಿಬೆಸೆಂಟರು

ಥಿಯಾಸಾಫಿಕಲ್ ಸೊಸೈಟಿಯು ಮೂಲ ಸ್ಥಾಪಕರೆಂದರೆ ಮ್ಯಾಡಮ್ ಬ್ಲಾವಟಿಸ್ಕಿ ಮತ್ತು ಕರ್ನಲ್ ಎಚ್.ಎಸ್. ಅಲ್ಕಾಟ್. ಈ ಸಮಾಜವು ಯಾವುದೇ ಬೇಧ-ಭಾವ ಇಲ್ಲದ ವಿಶ್ವಭಾತೃತ್ವದ ನಿರ್ಮಾಣ, ವೈಚಾರಿಕತೆಯ ತುಲನಾತ್ಮಕ ಅಧ್ಯಯನ ನಡೆಸುವುದು ಮತ್ತು ಪ್ರಕೃತಿ ನಿಯಮ ಹಾಗೂ ಮಾನವನ ಸುಪ್ತ ಶಕ್ತಿಗಳನ್ನು ಪತ್ತೆ ಹಚ್ಚುವ ಮುಖ್ಯ ಉದ್ದೇಶಗಳಿಂದ ಸ್ಥಾಪಿತವಾಯಿತು.

ಐರ್ಲೆಂಡ್ ದೇಶದ ಮಹಿಳೆ ಆನಿಬೆಸೆಂಟ್‌ರವರು ಥಿಯಾಸಾಫಿಕಲ್ ಸೊಸೈಟಿಯ ಕಾರ್ಯ ಚಟುವಟಿಕೆಗಳನ್ನು ಭಾರತದಲ್ಲಿ ಆರಂಭಿಸಿ ಅದಕ್ಕೆ

NOT TO BE REPUBLISHED ©KTBS


ನವಚೈತನ್ಯ ನೀಡಿದರು. ಉಪನ್ಯಾಸಗಳ ಮೂಲಕ ಭಾರತೀಯ ಸಂಸ್ಕೃತಿಯ ಬಗ್ಗೆ ಅಭಿಮಾನ ಬಿತ್ತಿದರು. ಸಮಾಜದಲ್ಲಿ ಸಮಾನತೆ ಮತ್ತು ವಿಶ್ವಸೋದರತೆಯನ್ನು ವೃದ್ಧಿಸುವುದು ಮತ್ತು ಸಾಮರಸ್ಯ ಸಾಧಿಸಲು ಪ್ರಯತ್ನಿಸಿದರು. ಆನಿಬೆಸೆಂಟರು ಸ್ವಾತಂತ್ರ್ಯ ಚಳುವಳಿಯನ್ನು ವ್ಯಾಪಕವಾಗಿ ಬೆಂಬಲಿಸಿದರು. 'ನ್ಯೂ ಇಂಡಿಯಾ' ಎಂಬ ಪತ್ರಿಕೆಯನ್ನು ಪ್ರಾರಂಭಿಸಿದರು. 1916ರಲ್ಲಿ ಹೋಂರೂಲ್ ಚಳುವಳಿಯನ್ನು ಪ್ರಾರಂಭಿಸಿದರು. 1917ರ ಕಾಂಗ್ರೆಸ್ ಅಧಿವೇಶನದಲ್ಲಿ ಅಧ್ಯಕ್ಷೆಯಾಗಿದ್ದರು. ಭಾರತೀಯ ತಾತ್ವಿಕತೆಗೆ ಮತ್ತು ಸ್ವಾತಂತ್ರ್ಯ ಚಳುವಳಿಗೆ ಇವರು ಅಪಾರ ಕೊಡುಗೆಯನ್ನು ನೀಡಿದರು.

**ನಿಮಗಿದು ತಿಳಿದಿರಲಿ :**

**'ಹೋಂರೂಲ್'** : ಬ್ರಿಟನ್ನಿನ ಹಿಡಿತದಲ್ಲಿದ್ದ ಐರ್ಲೆಂಡ್ ಮತ್ತು ಅಲ್ಲಿನ ಜನ ತಮ್ಮ ಆಡಳಿತವನ್ನು ತಾವೇ ನಡೆಸಿಕೊಳ್ಳುವ ಹಕ್ಕನ್ನು ಸಾಧಿಸಲು ಹೋಂರೂಲ್ ಆಂದೋಲನವನ್ನು ನಡೆಸಿದ್ದರು. ಇದರಿಂದ ಪ್ರಭಾವಿತರಾದ ಅನಿಬೆಸೆಂಟ್ ಭಾರತದಲ್ಲಿಯೂ ಹೋಂರೂಲ್ ಚಳುವಳಿಯನ್ನು ಆರಂಭಿಸಿದರು. 1916ರಲ್ಲಿ ಎರಡು ಹೋಂರೂಲ್ ಲೀಗ್‌ಗಳು ಅಸ್ತಿತ್ವಕ್ಕೆ ಬಂದವು. ಒಂದು ತಿಲಕರ ನೇತೃತ್ವದಲ್ಲಿ ಪೂನಾ ಕೇಂದ್ರವನ್ನಾಗಿಸಿಕೊಂಡಿತು. ಅದು ಮಹಾರಾಷ್ಟ್ರ, ಉತ್ತರಕರ್ನಾಟಕ, ಕೇಂದ್ರೀಯ ಪ್ರಾಂತ್ಯಗಳು ಮತ್ತು ಬೇರೆ ಪ್ರದೇಶಗಳಲ್ಲಿ ತನ್ನ ಶಾಖೆಗಳನ್ನು ಹೊಂದಿತ್ತು. ಮತ್ತೊಂದು ಹೋಂರೂಲ್‌ಲೀಗ್ ಆನಿಬೆಸೆಂಟರ ನೇತೃತ್ವದಲ್ಲಿ ಮದ್ರಾಸನ್ನು ಕೇಂದ್ರವನ್ನಾಗಿಸಿಕೊಂಡಿತು. ತಿಲಕರು 'ಮರಾಠ' ಮತ್ತು 'ಕೇಸರಿ' ಪತ್ರಿಕೆಗಳನ್ನು ನಡೆಸಿದರೆ, ಬೆಸೆಂಟರು 'ನ್ಯೂ ಇಂಡಿಯಾ' ಮತ್ತು 'ಕಾಮನ್‌ವೀಲ್' ಪತ್ರಿಕೆಗಳ ಮೂಲಕ ಪ್ರಚಾರ ಮಾಡಿದರು.

NOT TO BE REPUBLISHED @KTBS

### ಶ್ರೀ ನಾರಾಯಣಗುರು



ಶ್ರೀ ನಾರಾಯಣಗುರು

ಶ್ರೀ ನಾರಾಯಣಗುರು ಅವರು 1903ರಲ್ಲಿ ಧರ್ಮ ಪರಿಪಾಲನಾ ಯೋಗಂ ಆರಂಭಿಸಿದರು. ಇವರು ಕೇರಳದ ಈಳವು ಎಂಬಲ್ಲಿ ಹುಟ್ಟಿದರು. ಈ ಸಂಘಟನೆಯ ಪ್ರಮುಖ ಉದ್ದೇಶವೆಂದರೆ ಹಿಂದುಳಿದ ಮತ್ತು ಶೋಷಣೆಗೊಳಗಾದ ಸಮುದಾಯಗಳ ಸಬಲೀಕರಣ. ನಾರಾಯಣಗುರು (1854–1928) ಹಾಗೂ ಅವರ ಒಡನಾಡಿಗಳಾದ ಡಾ|| ಪಲ್ಪು ಮತ್ತು ಕುಮಾರನ್ ಆಸನ್‌ರವರು ಈ ಚಳವಳಿಯನ್ನು ಮುನ್ನಡೆಸಿದರು.

ಕೇರಳದ ಸಮಾಜದಲ್ಲೂ ಅತೀ ಜಾತಿ ಅಂತರಗಳ ಸಮಸ್ಯೆಗಳು ವ್ಯಾಪಕವಾಗಿದ್ದು, ಅನೇಕ ಹಿಂದುಳಿದ ಮತ್ತು ದಲಿತ ಸಮುದಾಯಗಳಿಗೆ ಸಾಮಾಜಿಕ ನಿರ್ಬಂಧಗಳನ್ನು ಹೇರಲಾಗಿತ್ತು. ಆ ಕಾಲಘಟ್ಟದಲ್ಲಿ ಈ ಸಮುದಾಯಗಳು ಎಲ್ಲರೂ ಬಳಸಲು ಇದ್ದ ಕೆರೆ ಬಾವಿಗಳಲ್ಲಿ ನೀರನ್ನು ತೆಗೆದುಕೊಳ್ಳಲಾಗುತ್ತಿರಲಿಲ್ಲ. ರಸ್ತೆಗಳ ಮೂಲಕ ಓಡಾಡಲಾಗುತ್ತಿರಲಿಲ್ಲ, ಚಪ್ಪಲಿಗಳನ್ನು ಹಾಕುವಂತಿರಲಿಲ್ಲ. ದೇವಸ್ಥಾನಕ್ಕೆ ಪ್ರವೇಶಿಸುವಂತಿರಲಿಲ್ಲ. ಮಹಿಳೆಯರ ಉಡುಪುಗಳ ಮೇಲೂ ನಿರ್ಬಂಧಗಳನ್ನು ಹೇರಲಾಗಿತ್ತು. ಇಷ್ಟೇ ಅಲ್ಲದೆ ಶಾಲೆಗಳಿಗೂ ಇವರಿಗೆ ಪ್ರವೇಶವಿರಲಿಲ್ಲ. ಕನಿಷ್ಠ ಪ್ರಮಾಣದ ಮಾನವ ಹಕ್ಕುಗಳನ್ನು ಪಡೆಯದ ಈ ಸಮುದಾಯಗಳು ಉಸಿರುಗಟ್ಟಿ ಬದುಕಬೇಕಾದ ಪರಿಸ್ಥಿತಿ ಇತ್ತು. ಈ ವಿಷಯಗಳನ್ನು ಕೈಗೆತ್ತಿಕೊಂಡು ಶ್ರೀ ನಾರಾಯಣಗುರು ಅವರು ತಮ್ಮ ಧರ್ಮ ಪರಿಪಾಲನಾ ಯೋಗಂ ಮೂಲಕ ಸಾಮಾಜಿಕ ಪ್ರತಿರೋಧದ ಚಳವಳಿಗಳನ್ನು ಪ್ರಾರಂಭಿಸಿದರು. ಮನುಷ್ಯ ಘನತೆಯಿಂದ ಬದುಕುವ ಸಮಾಜದ ನಿರ್ಮಾಣವೇ ಈ ಸಂಘಟನೆಯ ಉದ್ದೇಶವಾಗಿತ್ತು. ನಾರಾಯಣಗುರು ಅವರ ಪ್ರಮುಖ ಆಶಯ ಮಾನವ ಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ ಮತ್ತು ಒಬ್ಬನೇ ದೇವರು (One Caste, One Religion and One God for Man) ಎಂಬುದು. ಇದನ್ನು ಸಾಧಿಸಲು ಶಿಕ್ಷಣವೇ ಮಾರ್ಗವೆಂದು ಸಾರಿದರು. ಕೆಳಸಮುದಾಯಗಳ ಪ್ರವೇಶ ನಿರಾಕರಿಸುತ್ತಿದ್ದ ದೇವಾಲಯಗಳಿಗೆ ಪರ್ಯಾಯ ದೇವಾಲಯಗಳನ್ನು ಕಟ್ಟಿದರು.

ನಾರಾಯಣಗುರು ಮತ್ತು ಅವರ ಅನುಯಾಯಿಗಳು 1924ರಲ್ಲಿ ವೈಕಂ ಸತ್ಯಾಗ್ರಹವೆಂಬ ಶಿವ ದೇವಾಲಯ ಪ್ರವೇಶ ಚಳವಳಿಯನ್ನು ನಡೆಸಿದರು. ಇದರಲ್ಲಿ ಗಾಂಧೀಜಿಯವರು ಹಾಗೂ ಆತ್ಮಗೌರವ ಚಳವಳಿಯ ರೂವಾರಿಗಳಾದ ಪೆರಿಯಾರ್‌ರು ಭಾಗವಹಿಸಿದ್ದರು. ಗುರುವಾಯೂರು ದೇವಾಲಯ ಪ್ರವೇಶ ಚಳವಳಿಯು ಮತ್ತೊಂದು ಮಹತ್ವದ ಘಟನೆ.

## ಅಭ್ಯಾಸಗಳು

**I. ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಪದಗಳಿಂದ ತುಂಬಿರಿ.**

1. 19ನೆಯ ಶತಮಾನವನ್ನು __________ ಕಾಲವೆಂದು ಕರೆಯಲಾಗಿದೆ.
2. ರಾಮ್ ಮೋಹನರಾಯರು __________ ಪತ್ರಿಕೆಯನ್ನು ಪ್ರಾರಂಭಿಸಿದರು.
3. ಪ್ರಾರ್ಥನಾ ಸಮಾಜದ ಸ್ಥಾಪಕರು__________ .
4. ಸ್ವಾತಂತ್ರ್ಯ ಪ್ರತಿಯೊಬ್ಬ ಮನುಷ್ಯನ ಪ್ರಥಮ ಅವಶ್ಯಕತೆ ಎಂದು ಪ್ರತಿಪಾದಿಸಿದವರು__________.
5. ಸ್ವಾಮಿ ವಿವೇಕಾನಂದರ ಗುರುಗಳಾಗಿದ್ದವರು __________ .

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರ ಬರೆಯಿರಿ.**

1. ಬ್ರಹ್ಮ ಸಮಾಜದ ಬೋಧನೆಗಳಾವುವು ?
2. ದಯಾನಂದ ಸರಸ್ವತಿಯವರ 'ವೇದಗಳಿಗೆ ಹಿಂದಿರುಗಿ' ಎನ್ನುವ ಘೋಷಣೆಯನ್ನು ವಿಶ್ಲೇಷಿಸಿ.
3. ಸತ್ಯ ಶೋಧಕ ಸಮಾಜವು ಪ್ರತಿಪಾದಿಸಿದ ಸುಧಾರಣೆಗಳನ್ನು ವಿವರಿಸಿ.
4. ಆಲಿಘರ್ ಚಳುವಳಿಯ ಉದ್ದೇಶಗಳನ್ನು ವಿಶ್ಲೇಷಿಸಿ.
5. ರಾಮಕೃಷ್ಣಮಿಷನ್ ದೃಷ್ಟಿಕೋನವನ್ನು ವಿವರಿಸಿ.
6. ಸ್ವಾಮಿ ವಿವೇಕಾನಂದರು ಯುವ ಶಕ್ತಿಯ ಪ್ರೇರಕರಾಗಿದ್ದರು. ಹೇಗೆ ಎಂಬುದನ್ನು ವಿವರಿಸಿ.
7. ಆನಿಬೆಸೆಂಟರ ಸುಧಾರಣಾ ಕ್ರಮಗಳಾವುವು ?
8. ನಾರಾಯಣಗುರು ಧರ್ಮಪರಿಪಾಲನಾ ಯೋಗಂ ಸಂಘಟನೆಯ ಕೊಡುಗೆಗಳನ್ನು ತಿಳಿಸಿ.

**III. ಚಟುವಟಿಕೆ :**

1. ಹತ್ತಿರದಲ್ಲಿರುವ ರಾಮಕೃಷ್ಣಾಶ್ರಮಕ್ಕೆ ಭೇಟಿ ನೀಡಿ ವಿವೇಕಾನಂದರ ದೃಷ್ಟಿಕೋನದ ಬಗ್ಗೆ ಮಾಹಿತಿ ಸಂಗ್ರಹಿಸಿ.

**IV. ಯೋಜನೆಗಳು :**

1. ಗ್ರಂಥಾಲಯಗಳಿಗೆ ಭೇಟಿ ನೀಡಿ ಸಮಾಜ ಸುಧಾರಣೆ ಪುಸ್ತಕಗಳನ್ನು ಓದಿರಿ. ಶಿಕ್ಷಕರ ನೆರವಿನಿಂದ ಅಂತರಜಾಲದಿಂದ ಮಾಹಿತಿ ಸಂಗ್ರಹಿಸಿ.
2. ಸಮಾಜ ಸುಧಾರಣೆಗಾಗಿ ಇಂದು ಶ್ರಮಿಸುತ್ತಿರುವ ಸಂಸ್ಥೆಗಳ ಬಗ್ಗೆ ಶಿಕ್ಷಕರೊಂದಿಗೆ ಚರ್ಚಿಸಿ.

******

© KTBS NOT TO BE REPUBLISHED

# ರಾಜ್ಯಶಾಸ್ತ್ರ

## ಅಧ್ಯಾಯ – 6

## ಭಾರತಕ್ಕಿರುವ ಸವಾಲುಗಳು ಹಾಗೂ ಅವುಗಳ ಪರಿಹಾರೋಪಾಯಗಳು

N1Y6I3

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಕೋಮುವಾದ
- ಮಹಿಳೆಯರ ಸ್ಥಾನಮಾನ
- ಜನಸಂಖ್ಯೆ ಹೆಚ್ಚಳ
- ಲಾಭ ಬಡುಕತನ
- ಭ್ರಷ್ಟಾಚಾರ
- ಅನಕ್ಷರತೆ
- ಆರ್ಥಿಕ ಅಸಮಾನತೆ
- ಬಡತನ
- ಪ್ರಾದೇಶಿಕವಾದ
- ಕಳ್ಳ ಸಾಗಾಣಿಕೆ

ನಾವು 1947ರಿಂದ ಹಲವಾರು ಆಂತರಿಕ ಹಾಗೂ ಬಾಹ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಆ ಸಮಸ್ಯೆಗಳನ್ನು ಸರಿಯಾದ ಯೋಜನೆ ಹಾಗೂ ಉತ್ತಮ ಆಡಳಿತದ ಮೂಲಕ ಪರಿಹರಿಸಬೇಕಾಗಿದೆ. ನಮ್ಮ ಪ್ರಜಾತಂತ್ರ ವ್ಯವಸ್ಥೆಯಲ್ಲಿ ಕೇಂದ್ರ, ರಾಜ್ಯ ಹಾಗೂ ಸ್ಥಳೀಯ ಮಟ್ಟದ ಸರಕಾರಗಳಿಗೆ, ಈ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಜನತೆಯ ಸಹಕಾರವೂ ಅತ್ಯಗತ್ಯ.

ಹಾಗಾಗಿ ನಮ್ಮ ದೇಶ ಎದುರಿಸುತ್ತಿರುವ ಸಮಸ್ಯೆಗಳು ಯಾವುವು ಎಂದು ತಿಳಿಯಬೇಕಾದುದು ನಮ್ಮ ಕರ್ತವ್ಯವಲ್ಲವೇ? ಹೌದು, ನಾವು ಈ ಎಲ್ಲಾ ರಾಷ್ಟ್ರೀಯ ವಿಷಯಗಳ ಬಗೆಗೆ ತಿಳಿಯಬೇಕು ಹಾಗೂ ಅವುಗಳಿಗೆ ಸರಿಯಾದ ಪರಿಹಾರಗಳನ್ನೂ ಕಂಡು ಹಿಡಿಯಬೇಕು. ಇವುಗಳಲ್ಲಿ ಬಹುತೇಕ ಮಾನವ ನಿರ್ಮಿತ ಸಮಸ್ಯೆಗಳು ಹಾಗೂ ರಾಷ್ಟ್ರೀಯ ದುರಂತಗಳು. ಹಾಗಾಗಿ ನಾವು ಅವುಗಳಿಗೆ ಸುಯೋಗ್ಯ ಎನಿಸುವ ಮಾನವೀಯ ಪರಿಹಾರಗಳನ್ನು ಕಂಡುಕೊಳ್ಳಬೇಕು. ಉತ್ತಮ ಶಾಸನಾತ್ಮಕ, ಸಾಮಾಜಿಕ ಸುಧಾರಣೆಗಳು, ದಕ್ಷ ಆಡಳಿತ, ತ್ವರಿತ ಹಾಗೂ ಪಕ್ಷಪಾತರಹಿತ ನ್ಯಾಯಾಂಗ ವ್ಯವಸ್ಥೆ ಹಾಗೂ ಜನತೆಯ ಸಹಕಾರಗಳಿಂದ ಸಮಸ್ಯೆಗಳನ್ನು ನಿಗ್ರಹಿಸುವ ಪ್ರಯತ್ನ ನಡೆಯಬೇಕಿದೆ. ಅಂತಹ ಸಮಸ್ಯೆಗಳು ಹಾಗೂ ಸವಾಲುಗಳ ಬಗ್ಗೆ ತಿಳಿಯೋಣ.

**1. ಕೋಮುವಾದ :** ಕೋಮುವಾದ ಅಥವಾ ಮತೀಯವಾದ ನಮ್ಮ ಭಾರತೀಯ ಸಮಾಜದ ಪ್ರಮುಖ ಸಮಸ್ಯೆಯಾಗಿದೆ. ಧರ್ಮದ ಆಧಾರದಲ್ಲಿ ಸಮಾಜದ ವಿಭಜನೆ ಹಾಗೂ ಆ ನೆಲೆಯಲ್ಲೇ ಗುರುತಿಸಿಕೊಂಡು ಪರಸ್ಪರ ವಿರುದ್ಧ ಹಿತಾಸಕ್ತಿಗಳನ್ನು ಬೆಳಸಿಕೊಳ್ಳುವುದನ್ನು ಕೋಮುವಾದ ಅಥವಾ ಮತೀಯವಾದ ಎಂದು ಕರೆಯುತ್ತೇವೆ. ಇದು ಸಾಮಾಜಿಕವಾಗಿ ಭಿನ್ನತೆ, ಪರಸ್ಪರ ಅಪನಂಬಿಕೆ ಹಾಗೂ ಭಯದ ವಾತಾರವಣವನ್ನು ಸೃಷ್ಟಿಸುತ್ತದೆ. ಕೋಮುವಾದವು ಸಮಾಜದಲ್ಲಿ ಗುಂಪುಗಾರಿಕೆ, ಆರ್ಥಿಕ ವೈಷಮ್ಯ ಮತ್ತು ರಾಜಕೀಯ ಪೈಪೋಟಿಯಲ್ಲಿ ಪ್ರಕಟವಾಗುತ್ತದೆ. ಭಾರತದ ಮಟ್ಟಿಗೆ ಕೋಮುವಾದ ರಾಷ್ಟ್ರೀಯ ಏಕತೆ ಹಾಗೂ ಸಮಗ್ರತೆಯನ್ನು ಭಂಗಪಡಿಸುವ, ಅಪಾಯ ತಂದೊಡ್ಡುವ ಶಕ್ತಿಯಾಗಿದೆ. ಅದು ಸಮಾಜದ ನೆಮ್ಮದಿಯನ್ನು ಕೆಡಿಸುವುದಲ್ಲದೆ ವ್ಯಕ್ತಿಗಳ ಜೀವ ಹಾಗೂ ಸೊತ್ತುಗಳ ನಾಶಕ್ಕೂ

© KTBS NOT TO BE REPUBLISHED

ಕಾರಣವಾಗುತ್ತದೆ. ಮತೀಯವಾದವು ಗುಂಪುಗಳ ಮಧ್ಯೆ ಪರಸ್ಪರ ದೋಷಾರೋಪಣೆ, ದೈಹಿಕ ಹಲ್ಲೆ ಮುಂತಾದ ಅನಗತ್ಯ ತೊಂದರೆಗಳಿಗೂ ಕಾರಣವಾಗುತ್ತದೆ.

ಸ್ವಾತಂತ್ರ್ಯ ಪೂರ್ವದಲ್ಲಿ ಬ್ರಿಟಿಷರ ಒಡೆದು ಆಳುವ ನೀತಿಯಿಂದಾಗಿ ಮತೀಯವಾದವು ಮತೀಯ ಗುಂಪುಗಳ ಹಿತಾಸಕ್ತಿಯನ್ನು ರಾಷ್ಟ್ರೀಯ ಹಿತಾಸಕ್ತಿಗಿಂತಲೂ ಹೆಚ್ಚಿನದು ಎಂದು ಪರಿಗಣಿಸಿತು. ದೇಶದಲ್ಲಿ ಮತೀಯತೆಗೆ ಪೂರಕವಾಗಿ ತಮ್ಮ ತಮ್ಮ ಹಿತಾಸಕ್ತಿಗಳನ್ನು ವೃದ್ಧಿಸುವ ಪ್ರಯತ್ನಗಳನ್ನು ಮತೀಯ ಶಕ್ತಿಗಳು ಮಾಡುತ್ತವೆ. ತಮ್ಮ ತಮ್ಮ ಧರ್ಮಗಳನ್ನು ಪ್ರಚಾರ ಪಡಿಸುವ, ಪರಧರ್ಮಗಳನ್ನು ಬೇರೆ ರೀತಿಯಿಂದ ನೋಡುವಂತಹ ಸಂದರ್ಭಗಳು ಉಂಟಾಗುತ್ತವೆ. ಇದರಿಂದಾಗಿ ದೇಶದಲ್ಲಿನ ಏಕತೆಗೆ ಧಕ್ಕೆಯಾಗುವಂತಹ ಸಂದರ್ಭಗಳು ಬರುತ್ತವೆ. ದೇಶವು ಆಂತರಿಕವಾದ ಈ ಸಮಸ್ಯೆಯನ್ನು ನಿವಾರಿಸಲು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ.

ಕೋಮುವಾದವನ್ನು ನಿಯಂತ್ರಿಸಲು ಸಾಕಷ್ಟು ಮುನ್ನೆಚ್ಚರಿಕೆ ಅಗತ್ಯ. ಏಕರೂಪ ನಾಗರಿಕ ಸಂಹಿತೆ, ಎಲ್ಲಾ ನಾಗರಿಕರನ್ನು ಸಮಾನ ದೃಷ್ಟಿಯಿಂದ ಕಾಣುವಿಕೆ, ಜಾತ್ಯತೀತ ಮನೋಭಾವಕ್ಕೆ ಸಾಮಾಜಿಕ ಜೀವನದ ಎಲ್ಲಾ ರಂಗಗಳಲ್ಲೂ ಪ್ರಾಶಸ್ತ್ಯ, ಸಂಕುಚಿತ ವಿಭಾಗೀಯ ಚಿಂತನೆಗಳಿಂದ ಮೇಲುಸ್ತರದ ರಾಷ್ಟ್ರೀಯ ಚಿಂತನೆಗೆ ಹೆಚ್ಚು ಒತ್ತು– ಇವೆಲ್ಲಾ ಕೋಮುವಾದವನ್ನು ಹಿಮ್ಮೆಟ್ಟಿಸುವ ಉಪಾಯಗಳು. 'ಮತ–ಬ್ಯಾಂಕ್' ಧೋರಣೆಗಳು, ಅತಿ ಓಲೈಕೆಯ ವಿಧಾನಗಳು ಇತ್ಯಾದಿ, ದೇಶದ ಏಕತೆ ಹಾಗೂ ಸಮಗ್ರತೆಗೆ ಅಪಾಯ ತಂದೊಡ್ಡಬಹುದು. ಸಮಾಜವನ್ನು ಧರ್ಮದ ತಳಹದಿಯಲ್ಲಿ ವಿಭಜಿಸುವ ಹಾಗೂ ಸಾಮಾಜಿಕ ಹಾಗೂ ಆರ್ಥಿಕ ತಾರತಮ್ಯ ಧೋರಣೆ ಮತೀಯ ಸಾಮರಸ್ಯದಲ್ಲಿ ಬಿರುಕು ಹೆಚ್ಚಿಸಬಹುದು. ಅದರ ಬದಲಿಗೆ ನಮ್ಮ ಭಾರತದ ಎಲ್ಲಾ ಮತ ಸಂಪ್ರದಾಯಗಳು ಜನರಲ್ಲಿ ಸಾಮಾನ್ಯ ಹಾಗೂ ಆರೋಗ್ಯಕರ ರಾಷ್ಟ್ರೀಯ ಚಿಂತನೆಗಳನ್ನು ಬೆಳೆಸಲು ಯತ್ನಿಸಬೇಕು. ಮತೀಯ ಮೂಲಭೂತವಾದ ರಾಷ್ಟ್ರೀಯ ಹಿತಾಸಕ್ತಿಗೆ ಮತ್ತು ರಾಷ್ಟ್ರಾಭಿಮಾನಕ್ಕೆ ಧಕ್ಕೆ ಆಗದಂತೆ ತಡೆಗಟ್ಟಬೇಕು. ಶಿಕ್ಷಣದಲ್ಲಿ ಜಾತ್ಯತೀತ ತತ್ವವನ್ನು ಅಳವಡಿಸಿ ಅರಿವು ಮೂಡಿಸಬೇಕಿದೆ. ಸಾರ್ವಜನಿಕ ಎಚ್ಚರ, ರಾಜಕೀಯ ಅಚಲ ನಿರ್ಧಾರ, ಆಡಳಿತಾತ್ಮಕ ಸಮತೋಲನ, ಕ್ರಮಬದ್ಧ ಕಾನೂನು ವ್ಯವಸ್ಥೆ, ಸದೃಢ ರಾಷ್ಟ್ರೀಯ ಮನೋಭಾವ, ಆರೋಗ್ಯಕರ ಪೂರಕ ಸುದ್ದಿಮಾಧ್ಯಮ – ಇವೆಲ್ಲದರ ಸಮ್ಮಿಳಿತದೊಂದಿಗೆ ಕೋಮುವಾದವನ್ನು ನಿಯಂತ್ರಿಸಬಹುದು.

2. **ಪ್ರಾದೇಶಿಕವಾದ** : ಒಂದು ನಿರ್ದಿಷ್ಟ ಜನಸಮುದಾಯ ತಾವು ವಾಸಿಸುವ ಪ್ರದೇಶವನ್ನೇ ಅತ್ಯಂತ ಗಾಢವಾಗಿ ಪ್ರೀತಿಸಿ, ಕೇವಲ ಆ ಭಾಗದ ಬಗ್ಗೆಯೇ ಅತಿಯಾದ ಅಭಿಮಾನವನ್ನು ಬೆಳೆಸಿಕೊಂಡರೆ ಅದನ್ನು ಪ್ರಾದೇಶಿಕವಾದ ಎಂದು ಕರೆಯಬಹುದು. ಭಾರತದಂತಹ ವಿಶಾಲ ರಾಷ್ಟ್ರ ಸಹಜವಾಗಿ ಹಲವಾರು ಪ್ರಾದೇಶಿಕ ವಿಭಿನ್ನತೆಯನ್ನು ಹೊಂದಿದ ದೇಶ. ಒಂದು ನಿರ್ದಿಷ್ಟ ಹಂತದವರೆಗೆ ಈ ಪ್ರಾದೇಶಿಕವಾದ ಸಹನೆಗೆ ಯೋಗ್ಯ ಎನಿಸುತ್ತದೆ. ತಮ್ಮದೇ ಪ್ರದೇಶದ ಸರ್ವತೋಮುಖ ಬೆಳವಣಿಗೆಗೆ ಪ್ರಯತ್ನಿಸಲು ಈ ಭಾವನೆ ಪ್ರೇರಣೆ ನೀಡುತ್ತದೆ. ಆದರೆ ಈ ಪ್ರಾದೇಶಿಕ ಮನೋಭಾವ ತೀರಾ ಹೆಚ್ಚು ಎನಿಸಿದರೆ ಅದು ರಾಷ್ಟ್ರದ ಏಕತೆ ಹಾಗೂ ಹಿತಾಸಕ್ತಿಗಳಿಗೆ ಧಕ್ಕೆ ಒದಗಿಸುತ್ತದೆ. ಆದುದರಿಂದ ಆಯಾಯಾ ಪ್ರದೇಶದ ಜನಸಮುದಾಯ ತಮ್ಮದೇ ಪ್ರಾದೇಶಿಕ ಮನೋಭಾವ ಹೊಂದುವ ಜೊತೆಜೊತೆಗೆ ಸಮಗ್ರ ದೇಶದ ಪ್ರಗತಿಯ ಬಗೆಗೂ ಚಿಂತನೆ ಹರಿಸುವಿಕೆ ಅತ್ಯಗತ್ಯ.

ಆಯಾಯ ಪ್ರದೇಶಗಳ ಚಾರಿತ್ರಿಕ ಹಿನ್ನೆಲೆ, ಸಾಮಾಜಿಕ ಕಟ್ಟುಪಾಡುಗಳು, ಆರ್ಥಿಕ ವಿಚಾರಗಳು, ಸಾಂಸ್ಕೃತಿಕ ವಿಭಿನ್ನತೆಗಳು ಹಾಗೂ ಭೌಗೋಳಿಕ ಪರಿಸರ–ಅಲ್ಲಿನ ಜನ ಸಮುದಾಯದಲ್ಲಿ ಪ್ರಾದೇಶಿಕ ವಾದವನ್ನು ಸಹಜವಾಗಿ ಬೆಳೆಸುತ್ತದೆ. ಅತಿಯಾದ ಭಾಷಾಭಿಮಾನವೂ ರಾಷ್ಟ್ರೀಯವಾದದ ವಿರುದ್ಧ

NOT TO BE REPUBLISHED ©KTBS

ಸಂಕುಚಿತ ಮನೋಭಾವವನ್ನು ಬೆಳೆಸುತ್ತದೆ. ಪ್ರಾದೇಶಿಕವಾದವನ್ನು ವೈಭವೀಕರಿಸುವುದರಿಂದ ದೇಶದ ಏಕತೆಗೆ ಧಕ್ಕೆ ಉಂಟಾಗುತ್ತದೆ. ಇತ್ತೀಚೆಗೆ ಆಂಧ್ರಪ್ರದೇಶದಲ್ಲಿನ ತೆಲಂಗಾಣದ ಭಾಗದ ಪ್ರಾದೇಶಿಕವಾದ ಹೋರಾಟವನ್ನು ಗಮನಿಸಬಹುದು. ದೇಶದ ಇನ್ನಿತರ ಭಾಗಗಳಲ್ಲಿ ನಡೆಯುತ್ತಿರುವ ಪ್ರಾದೇಶಿಕವಾದದ ಹೋರಾಟಗಳು ಕೂಡಾ ದೇಶದ ಅಭಿವೃದ್ಧಿ ತೊಡಕಾಗುವ ಸಾಧ್ಯತೆಗಳಿವೆ.

ಇಂತಹ ಸಂಕುಚಿತ ಪ್ರಾದೇಶಿಕವಾದವನ್ನು ದೂರೀಕರಿಸಲು ನಮ್ಮ ಭಾರತ ಸಂವಿಧಾನವೇ ಹಲವಾರು ಮಾರ್ಗಗಳನ್ನು ಸೂಚಿಸಿದೆ. ಏಕ ಪೌರತ್ವವನ್ನು ಭಾರತದಲ್ಲಿ ನೆಲೆಗೊಳಿಸುವ ಮೂಲಕ ನಮ್ಮ ಸಂವಿಧಾನ ರಾಷ್ಟ್ರದ ಸಮಗ್ರತೆ ಹಾಗೂ ಏಕತೆಯನ್ನು ಎತ್ತಿ ಹಿಡಿಯುತ್ತದೆ. ಆದರೆ ಅದರ ಜೊತೆಗೆ ಸಂಯುಕ್ತ ರಾಜ್ಯ ಪದ್ಧತಿಯ ಅಂಶಗಳನ್ನು ಅಳವಡಿಸಿ ಪ್ರಾದೇಶಿಕ ಬೆಳವಣಿಗೆಗೂ ಸಾಕಷ್ಟು ಅವಕಾಶ ಕಲ್ಪಿಸಿಕೊಟ್ಟಿದೆ. ನಮ್ಮ ಸಂವಿಧಾನದ ಪ್ರಸ್ತಾವನೆಯಲ್ಲಿಯೇ 'ಭಾರತದ ಪ್ರಜೆಗಳಾದ ನಾವು.....' ಎಂಬ ಸ್ಪಷ್ಟ ಒಕ್ಕಣೆಯು ಭಾರತದ ರಾಷ್ಟ್ರೀಯತೆಯನ್ನು ನೇರವಾಗಿ ಬಿಂಬಿಸುತ್ತದೆ. 1956ರ ಭಾಷಾವಾರು ಪ್ರಾಂತ್ಯಗಳ ರಚನೆಯು ಈ ದೇಶದ ಎಲ್ಲಾ ರಾಜ್ಯಗಳ ಪ್ರಗತಿಗೆ ಪೂರಕವಾಗಬೇಕೆ ವಿನಾ ರಾಜ್ಯಗಳು ತಮ್ಮ ತಮ್ಮೊಳಗೆ ಪರಸ್ಪರ ಕಚ್ಚಾಡಲು ಆಸ್ಪದ ನೀಡಬಾರದು. ಆದರೆ ತೀವ್ರ ಪ್ರಾದೇಶಿಕವಾದಕ್ಕೆ ಪುಷ್ಟಿ ದೊರೆತರೆ ಆಗ, ಅಂತರರಾಜ್ಯ ಗಡಿ ಸಮಸ್ಯೆ, ಅಂತರರಾಜ್ಯ ನದೀ ನೀರಿನ ಸಮಸ್ಯೆ ಮುಂತಾದವುಗಳು ತಲೆದೋರಬಹುದು. ಇಂತಹ ಸಂಕುಚಿತ ಪರಿಧಿಯ ಪ್ರಾದೇಶಿಕವಾದ ರಾಷ್ಟ್ರೀಯ ಹಿತಾಸಕ್ತಿಗಳಿಗೆ ಹಾನಿ ಉಂಟು ಮಾಡುತ್ತದೆ. ನಮ್ಮ ಸಂವಿಧಾನ ಕರ್ತೃಗಳು ಅರೆ ಸಂಯುಕ್ತ ವ್ಯವಸ್ಥೆಯನ್ನು ರೂಪಿಸಿದ್ದು, ರಾಜ್ಯಗಳಿಗೆ ಸ್ವಾಯತ್ತತೆ ನೀಡಿವೆ. ಆದರೂ ಕೇಂದ್ರ ಸರ್ಕಾರವು ರಾಜ್ಯಗಳ ಚಟುವಟಿಕೆಗಳನ್ನು ದೇಶದ ಸಮಗ್ರತೆಯ ದೃಷ್ಟಿಯಿಂದ ಸಮನ್ವಯಗೊಳಿಸುತ್ತದೆ. ಪ್ರಾದೇಶಿಕವಾದವು ರಾಜ್ಯಗಳಲ್ಲಿಯೂ ಇರುವುದನ್ನು ಗಮನಿಸಬಹುದಾಗಿದೆ. ನಮ್ಮ ರಾಜ್ಯದಲ್ಲಿಯೇ ಪ್ರಾಂತೀಯತೆಯಲ್ಲಿನ ಸಮತೋಲನ ನಿವಾರಣೆಗಾಗಿ ವಿಶೇಷ ಆದ್ಯತೆ ನೀಡಿದೆ. ಇದಕ್ಕಾಗಿ ಡಾ. ಡಿ.ಎಂ.ನಂಜುಂಡಪ್ಪ ಸಮಿತಿ, ಮಲೆನಾಡು ಅಭಿವೃದ್ಧಿ ಸಮಿತಿ, ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಸಮಿತಿಗಳನ್ನು ರಚಿಸುವ ಮೂಲಕ ಪ್ರಾದೇಶಿಕ ಅಸಮತೋಲನದ ನಿವಾರಣೆಗಾಗಿ ಪ್ರಯತ್ನಿಸಿದೆ.

ಭಾರತ ಸರ್ಕಾರವು ಕೂಡಾ ಈಶಾನ್ಯರಾಜ್ಯಗಳ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮವನ್ನು ರೂಪಿಸುವ ಮೂಲಕ ಪ್ರಾದೇಶಿಕವಾದವನ್ನು ತಡೆಗಟ್ಟಲು ಪ್ರಯತ್ನಿಸುತ್ತಿದೆ.

> **ನಿಮಗಿದು ತಿಳಿದಿರಲಿ :**
>
> "ಪ್ರಜಾಪ್ರಭುತ್ವ ಮಾತ್ರ ಎಲ್ಲಾ ವ್ಯಕ್ತಿಗಳಲ್ಲಿರುವ ಅಸಮಾನ ಕೌಶಲ್ಯಗಳ ಸಮಾನ ಬೆಳವಣಿಗೆಗೆ ಅವಕಾಶ ನೀಡುತ್ತದೆ." ಡಾ.ಎಸ್.ರಾಧಾಕೃಷ್ಣನ್.
>
> [ವಿಶ್ವಸಂಸ್ಥೆಯ 2015ರ ಮಿಲೇನಿಯಮ್ ಘೋಷಣೆ– "ಸಾರ್ವತ್ರಿಕ ಪ್ರಾಥಮಿಕ ಶಿಕ್ಷಣ ಹಾಗೂ ಶಿಕ್ಷಣದಲ್ಲಿ ಲಿಂಗ ಸಮಾನತೆ"].

**3. ಅನಕ್ಷರತೆ :** ಅನಕ್ಷರತೆಯು ಭಾರತದಲ್ಲಿ ಒಂದು ಮುಖ್ಯ ಸಮಸ್ಯೆಯಾಗಿದೆ. ದೇಶದಲ್ಲಿ ಇನ್ನೂ ಪೂರ್ಣಪ್ರಮಾಣದ ಸಾಕ್ಷರತೆಯನ್ನು ಸಾಧಿಸಬೇಕಾಗಿದೆ. ನಮ್ಮಲ್ಲಿನ ಅನಕ್ಷರತೆಗೆ ಬಡತನ, ವಲಸೆ ಹೋಗುವಿಕೆ, ಮಕ್ಕಳ ದುಡಿಮೆ, ಬಾಲ್ಯವಿವಾಹ, ಚಿಕ್ಕ ಮಕ್ಕಳ ಲಾಲನೆ–ಪಾಲನೆಗೆ ಹಿರಿಯ ಮಕ್ಕಳನ್ನು ಬಳಸಿಕೊಳ್ಳುವುದು, ಶಿಕ್ಷಣ ಕೊಡಿಸಬೇಕೆಂಬ ಆಸಕ್ತಿಯ ಕೊರತೆ ಮೊದಲಾದ ಕಾರಣಗಳನ್ನು ಗುರುತಿಸಬಹುದಾಗಿದೆ. ದೇಶದಲ್ಲಿನ ಅಭಿವೃದ್ಧಿಗೆ ಶಿಕ್ಷಣವು ಪ್ರಮುಖವಾದ ಅಂಶವಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅವರವರ ಜವಾಬ್ದಾರಿ ಮತ್ತು ಪಾತ್ರವನ್ನು ಪ್ರತಿಯೊಬ್ಬರೂ ತಿಳಿಯಬೇಕಿದೆ. ಆದ್ದರಿಂದ ಅನಕ್ಷರತೆಯಂತಹ ಸಮಸ್ಯೆಯನ್ನು ಹೋಗಲಾಡಿಸಬೇಕಾಗಿದೆ.

©KTBS NOT TO BE REPUBLISHED

> **ಚಟುವಟಿಕೆ :**
>
> ನೀವು ಗ್ರಾಮಪಂಚಾಯ್ತಿ ಅಧ್ಯಕ್ಷರೆಂದು ಭಾವಿಸಿಕೊಂಡು ಆ ಪಂಚಾಯ್ತಿ ವ್ಯಾಪ್ತಿಯಲ್ಲಿ ಅನಕ್ಷರತೆ ನಿರ್ಮೂಲನೆಗಾಗಿ ನಿಮ್ಮ ಯೋಜನೆಯನ್ನು ಸಿದ್ಧಪಡಿಸಿ ಮಿತ್ರರೊಂದಿಗೆ ಚರ್ಚಿಸಿ.

ಸ್ವಾತಂತ್ರ್ಯ ಪಡೆದ ಸಮಯದಲ್ಲಿ ಸುಶಿಕ್ಷಿತರ ಪ್ರಮಾಣ ಕೇವಲ ಶೇ. 12 ರಷ್ಟು ಇತ್ತು. ಇದು 2001ರಲ್ಲಿ ಶೇ. 66ಕ್ಕೆ ಏರಿತು. 2011ರಲ್ಲಿ ಸಾಕ್ಷರತೆಯ ಪ್ರಮಾಣವು ಶೇ. 74 ಆಗಿರುತ್ತದೆ. ಆದರೂ ಇನ್ನೂ ಶೇ. 26 ರಷ್ಟು ಜನರು ಅನಕ್ಷರಸ್ಥರಾಗಿರುತ್ತಾರೆ. ಆದ್ದರಿಂದಾಗಿ ಸರ್ಕಾರವು ಅನಕ್ಷರತೆಯ ಸಮಸ್ಯೆಯನ್ನು ಹೋಗಲಾಡಿಸಲು ಹಲವಾರು ಯೋಜಿತ ಕ್ರಮಗಳನ್ನು ಕೈಗೊಂಡಿದೆ. 2001 ರಿಂದ ಇಡೀ ದೇಶಾದ್ಯಂತ 6 ರಿಂದ 14 ವರ್ಷದ ಮಕ್ಕಳಿಗೆ ಶಿಕ್ಷಣದ ವ್ಯವಸ್ಥೆಗಾಗಿ ಸರ್ವಶಿಕ್ಷಣ ಅಭಿಯಾನ ಕಾರ್ಯಕ್ರಮವನ್ನು ಜಾರಿಗೆ ತರಲಾಯಿತು. ಇದರಲ್ಲಿ ವಿಕಲ ಚೇತನರ ಶಿಕ್ಷಣ ಮತ್ತು ಮಹಿಳಾ ಶಿಕ್ಷಣ ಹಾಗೂ ಮಹಿಳಾ ಜಾಗೃತಿಗೂ ಕೂಡ ಆದ್ಯತೆ ನೀಡಲಾಗಿದೆ. ಅನಕ್ಷರಸ್ಥರನ್ನು ಸಾಕ್ಷರರನ್ನಾಗಿ ಮಾಡಲು ಭಾರತ ಸರ್ಕಾರವು 1988 ರಲ್ಲಿ 'ರಾಷ್ಟ್ರೀಯ ಸಾಕ್ಷರತಾ ಮಿಷನ್' ಸ್ಥಾಪಿಸಿದೆ. 'ಸಾಕ್ಷರ ಭಾರತ' ಎಂಬ ಕಾರ್ಯಕ್ರಮದ ಮೂಲಕ ಅನಕ್ಷರತೆಯನ್ನು ಹೋಗಲಾಡಿಸಲು ಕ್ರಮಕೈಗೊಂಡಿದೆ.

> **ನಿಮಗಿದು ತಿಳಿದಿರಲಿ :**
>
> **ಲೋಕಾಯುಕ್ತ ಸಂಸ್ಥೆ :**
>
> 1986ರಲ್ಲಿ ಕರ್ನಾಟಕ ಲೋಕಾಯುಕ್ತ ಅಧಿನಿಯಮವನ್ನು ಜಾರಿಗೊಳಿಸಿತ್ತು. ಅದರಂತೆ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರು ಮುಖ್ಯಸ್ಥರಾಗಿದ್ದರು. ಸರ್ಕಾರದ ಕೆಲಸದಲ್ಲಿ ಭ್ರಷ್ಟಾಚಾರ, ಸಾರ್ವಜನಿಕರಿಗೆ ಅನಗತ್ಯ ವಿಳಂಬ, ಕಿರುಕುಳ ನೀಡಿದರೆ ದೂರು ಸಲ್ಲಿಸಬಹುದಾಗಿತ್ತು. ಈಗ ಇದರ ಬದಲಿಗೆ ಭ್ರಷ್ಟಾಚಾರ ನಿಗ್ರಹ ದಳವನ್ನು ರಚಿಸಲಾಗಿದೆ.

ಇತ್ತೀಚೆಗೆ ಸಂವಿಧಾನದ 21ಎ ವಿಧಿಯನ್ವಯ ಶಿಕ್ಷಣದ ಹಕ್ಕನ್ನು ಮೂಲಭೂತ ಹಕ್ಕಾಗಿ ಪರಿಗಣಿಸಿದೆ. 2009ರಲ್ಲಿ ದೇಶದಾದ್ಯಂತ ಶಿಕ್ಷಣ ಹಕ್ಕು ಕಾಯ್ದೆಯನ್ನು (RTE - 2009) ಜಾರಿಗೊಳಿಸಿದೆ. ಇದರಿಂದ 6 ರಿಂದ 14 ವರ್ಷವಯೋಮಾನದವರೆಗೆ ಶಿಕ್ಷಣವನ್ನು ಕಡ್ಡಾಯಗೊಳಿಸಲಾಗಿದೆ.

4. **ಭ್ರಷ್ಟಾಚಾರ** : ಭಾರತದ ಸಾರ್ವಜನಿಕ ಜೀವನದಲ್ಲಿ ಭ್ರಷ್ಟಾಚಾರ ಒಂದು ಮುಖ್ಯ ಪಿಡುಗು ಎನಿಸಿದೆ. ವಾಸ್ತವಿಕವಾಗಿ ಇದು ಸಾರ್ವತ್ರಿಕವಾಗಿ ಹಾಗೂ ಸಮಾಜದ ಎಲ್ಲಾ ಸ್ತರಗಳಲ್ಲಿಯೂ ವ್ಯಾಪಕವಾಗಿ ಹಬ್ಬಿದೆ. ಭ್ರಷ್ಟಾಚಾರ ಎಂದರೆ ಲಂಚ ಅಥವಾ ಇನ್ನಾವುದೇ ಕ್ರಮದಿಂದ ಕಾನೂನು ಬಾಹಿರಕ್ರಮಕ್ಕೆ ಪ್ರಚೋದನೆ ನೀಡುವಿಕೆ ಎಂದು ಅರ್ಥ. ಅದು ಸರಿಯಾದ ಮತ್ತು ನ್ಯಾಯಬದ್ಧವಾದ ಕಾರ್ಯಾಚರಣೆಯಿಂದ ಸ್ಪಷ್ಟವಾಗಿ ದೂರ ಸರಿಯುವಿಕೆಯನ್ನು ಸೂಚಿಸುತ್ತದೆ. ಸಾರ್ವಜನಿಕ ಜೀವನದ ಅಧಿಕಾರ ಹಾಗೂ ವರ್ಚಸ್ಸನ್ನು ಸ್ವಾರ್ಥ ಹಾಗೂ ತಪ್ಪು ವಿಧಾನದ ದುರ್ಬಳಕೆ ಎಂದೂ ಇದನ್ನು ವ್ಯಾಖ್ಯಾನಿಸಬಹುದು. ಎಲ್ಲಾ ವಿಧಿವಿಧಾನಗಳನ್ನು ಬದಿಗೆ ಸರಿಸಿ ಸ್ವಾರ್ಥದ ದೃಷ್ಟಿಯಿಂದ ಸ್ವಂತ ಲಾಭಕ್ಕಾಗಿ ಅಧಿಕಾರ ದುರುಪಯೋಗವನ್ನೇ ಭ್ರಷ್ಟಾಚಾರ ಎಂದು ಕರೆಯಬಹುದು. ಇದು ಸಾಂಕ್ರಾಮಿಕ ರೋಗದಂತೆ ಸಾರ್ವಜನಿಕ ಜೀವನದಲ್ಲಿ ಸರ್ವವ್ಯಾಪಿಯಾಗಿ ಹಬ್ಬುತ್ತಿದೆ.

ಭ್ರಷ್ಟಾಚಾರ ಹಲವಾರು ನಕಾರಾತ್ಮಕ ಪರಿಣಾಮವನ್ನು ಸಾರ್ವಜನಿಕವಾಗಿ ಹಾಗೂ ವ್ಯಕ್ತಿಗತವಾಗಿ ಬೀರುವಂತಹದು. ಅದು ದೇಶದ ಮೇಲೆ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ದುಷ್ಪರಿಣಾಮಗಳನ್ನು ಬೀರುತ್ತದೆ. ಇನ್ನೊಂದು ವಿಧದಲ್ಲಿ ನಮೂದಿಸುವುದಾದರೆ ಭ್ರಷ್ಟಾಚಾರವು ಸಮಾಜವಿರೋಧಿ ಹಾಗೂ ಆರ್ಥಿಕ ಸುವ್ಯವಸ್ಥೆಯ ವಿರೋಧಿ ಕೂಡಾ ಮಾತ್ರವಲ್ಲ, ಅದು ರಾಜಕೀಯವಾಗಿ ಅಸಮರ್ಪಕ ಹಾಗೂ ನೈತಿಕವಾಗಿ ತಪ್ಪು ಎನಿಸುವಂತಹದು. ಮೌಲ್ಯಗಳ ಬಗೆಗಿನ

NOT TO BE REPUBLISHED @KTBS

ವ್ಯಕ್ತಿಗತ ಚಿಂತನೆ ಸಮಾಜ ಒಪ್ಪುವ ಅಥವಾ ಪರಿಗ್ರಹಿಸುವ ಮೌಲ್ಯಗಳು ಹಾಗೂ ಆಡಳಿತ ವ್ಯವಸ್ಥೆಯಲ್ಲಿ ಲಂಚಗುಳಿತನ, ಸ್ವಜನ ಪಕ್ಷಪಾತ, ಜಾತೀಯತೆ, ಉದ್ದೇಶಪೂರ್ವ ಮುಂದೂಡಿಕೆ – ಇವೆಲ್ಲವೂ ಈ ಭ್ರಷ್ಟಾಚಾರದ ಪರಿಧಿಯೊಳಗೆ ಬರುವಂತಹ ಸಂಗತಿಗಳು. ಚುನಾವಣಾ ಸಮಯದಲ್ಲಿಯೂ ಇಂತಹ ಅನಪೇಕ್ಷಣೀಯ ಸಂಗತಿಗಳು ಸಾರ್ವಜನಿಕ ಬದುಕಿನ ಒಳಗೆ ನುಸುಳಿಕೊಳ್ಳುತ್ತವೆ.

ರಾಜಕೀಯ ಭ್ರಷ್ಟಾಚಾರವು ವ್ಯವಸ್ಥಿತ ಅಪರಾಧಗಳಿಗೂ ಎಡೆಮಾಡಿಕೊಡುತ್ತದೆ. ಅದು ಸಾರ್ವಜನಿಕ ಸೇವೆಯ ಕ್ಷೇತ್ರಗಳಲ್ಲಿ ಅಧಿಕಾರಶಾಹಿಯಲ್ಲಿ ಒದಗುವ ಲೋಪದೋಷಗಳಿಗೂ, ವಂಚನೆಗಳಿಗೂ ಅನುವು ಮಾಡಿಕೊಡುತ್ತದೆ. ತೆರಿಗೆಕಳ್ಳತನ, ಅಕ್ರಮ ದಾಸ್ತಾನು, ಕಳ್ಳಸಾಗಾಣಿಕೆ, ಆರ್ಥಿಕ ವಂಚನೆ, ಮೋಸಗಾರಿಕೆ, ವಿದೇಶೀ ವಿನಿಮಯದ ಕಾನೂನು ಉಲ್ಲಂಘನೆ, ಔದ್ಯೋಗಿಕ ವಂಚನೆ ಈ ಎಲ್ಲವೂ ಭ್ರಷ್ಟಾಚಾರದ ಜಾಲದಲ್ಲಿ ಸೇರಿಕೊಂಡಿವೆ.

ಭ್ರಷ್ಟಾಚಾರವನ್ನು ಕೇವಲ ಟೀಕಿಸಿ ಅದರೊಂದಿಗೇ ರಾಜಿಮಾಡಿಕೊಂಡು ಬದುಕುವುದರಿಂದ ಅದರ ನಿರ್ಮೂಲನೆ ಅಸಾಧ್ಯ. ವೈಯಕ್ತಿಕ ಹಾಗೂ ಸಾಮಾಜಿಕ ಭದ್ರ ನೈತಿಕ ತಳಹದಿಯ ಮೂಲಕವಾಗಿ ಮಾತ್ರ ವ್ಯಾಪಕವಾಗಿ ಹಬ್ಬಿನಿಂತ ಭ್ರಷ್ಟಾಚಾರವನ್ನು ತೊಲಗಿಸಬಹುದು. ಅನೇಕ ಬಾರಿ, ಮಾನವ ಸಹಜವಾದ ಸ್ವಾರ್ಥ, ಆಪತ್ತುಗಳ ನಿವಾರಣೆಯ ಲೆಕ್ಕಾಚಾರ, ವೈಯಕ್ತಿಕ ಲಾಭ ಇವೆಲ್ಲಾ ಭ್ರಷ್ಟಾಚಾರಕ್ಕೆ ಮುಂದಾಗಲು ಪ್ರೇರೇಪಿಸುತ್ತವೆ. ಕಟ್ಟುನಿಟ್ಟಾದ ಮೇಲ್ವಿಚಾರಣೆ ಇಲ್ಲದಿರುವುದು ಹಾಗೂ ದುರ್ಬಲ ಕಾನೂನು ವ್ಯವಸ್ಥೆ ಭ್ರಷ್ಟಾಚಾರಕ್ಕೆ ಅನುವು ಮಾಡಿಕೊಡುತ್ತದೆ. ಭ್ರಷ್ಟಾಚಾರ ನಿಗ್ರಹಕ್ಕೆ ಪ್ರಬಲ ರಾಜಕೀಯ ಇಚ್ಛಾಶಕ್ತಿ ಹಾಗೂ ಸಾರ್ವಜನಿಕ ಸಹಕಾರ ತೀರಾ ಅತ್ಯಗತ್ಯ. ಇನ್ನೊಂದು ರೀತಿಯಲ್ಲಿ ವ್ಯಾಖ್ಯಾನಿಸುವುದಾದರೆ, ಒಳ್ಳೆಯ ರಾಜಕೀಯ ನಾಯಕತ್ವ, ಉತ್ತಮ ಅಧಿಕಾರಿ ವರ್ಗ ಹಾಗೂ ರಾಜಕೀಯ ಪರಿಜ್ಞಾನ ಹಾಗೂ ಪೌರತ್ವದ ಅರಿವು ಹೊಂದಿದ ಜನತೆ ಜಂಟಿಯಾಗಿ ಭ್ರಷ್ಟಾಚಾರದ ವಿರುದ್ಧ ಹೋರಾಟ ನಡೆಸಬಹುದಾಗಿದೆ. ಲೋಕಪಾಲ, ಲೋಕಾಯುಕ್ತರಂತಹ ಸಂಸ್ಥೆಗಳು, ಭ್ರಷ್ಟಾಚಾರ ನಿಯಂತ್ರಣದಲ್ಲಿ ಪೂರಕ ಶಕ್ತಿ ಒದಗಿಸಬಲ್ಲವು. ಶಿಕ್ಷಣ ಸಂಸ್ಥೆಗಳು ಹಾಗೂ ಸಾಮಾಜಿಕ ನಾಯಕರುಗಳು ಕೂಡಾ ಈ ದಿಸೆಯಲ್ಲಿ ಕಾರ್ಯನಿರ್ವಹಿಸಬಹುದು. ಅತ್ಯಂತ ಕಠಿಣ ಶಿಕ್ಷಾ ವಿಧಾನ ಭ್ರಷ್ಟಾಚಾರವನ್ನು ಹತ್ತಿಕ್ಕುವಲ್ಲಿ ಎಲ್ಲಾ ಸ್ತರಗಳಲ್ಲಿಯೂ ಅತ್ಯಗತ್ಯ ಎನಿಸುತ್ತದೆ.

**ಚಟುವಟಿಕೆ :**

ಭಾರತದ ಪ್ರಜೆಯಾಗಿ ಭ್ರಷ್ಟಾಚಾರದಂತಹ ಪಿಡುಗನ್ನು ನಿರ್ಮೂಲನ ಮಾಡಲು ನಿಮ್ಮ ಸಲಹೆಗಳನ್ನು ಶಿಕ್ಷಕರೊಂದಿಗೆ ಚರ್ಚಿಸಿ.

5. **ಮಹಿಳೆಯರ ಸ್ಥಾನಮಾನ :** ಸ್ವಾತಂತ್ರ್ಯಪೂರ್ವದಲ್ಲಿಯೂ ಮಹಿಳೆಯ ಸಾಧನೆಗಳನ್ನು ಗುರುತಿಸಬಹುದಾಗಿದೆ. ಝಾನ್ಸಿರಾಣಿ ಲಕ್ಷ್ಮಿಬಾಯಿ, ಕಿತ್ತೂರುರಾಣಿ ಚೆನ್ನಮ್ಮ, ಅನಿಬೆಸೆಂಟ್, ಕಸ್ತೂರಬಾ ಗಾಂಧಿ ಮೊದಲಾದವರನ್ನು ಸ್ಮರಿಸಬಹುದಾಗಿದೆ. ಇಂದು ಮಹಿಳೆಯರು ವೈದ್ಯಕೀಯ, ಅಧ್ಯಾಪಕ, ಇಂಜಿನಿಯರ್, ಪೈಲಟ್, ಗಗನಯಾತ್ರಿ, ಪೊಲೀಸ್, ರಾಜಕೀಯ, ರಕ್ಷಣಾಪಡೆ ಈ ರೀತಿ ಎಲ್ಲಾ ಕ್ಷೇತ್ರಗಳಲ್ಲಿನ ಕಾರ್ಯಗಳಲ್ಲಿ ತೊಡಗಿದ್ದಾರೆ. ಆದರೂ ಮಹಿಳೆಯರ ಸ್ಥಾನಮಾನ ಇನ್ನೂ ಉತ್ತಮವಾಗಬೇಕಿದೆ. ಸಾಮಾಜಿಕ ಪದ್ಧತಿಗಳು, ಬಡತನ ಮತ್ತು ಅನಕ್ಷರತೆಯಂತಹ ಕಾರಣಗಳಿಂದ ಸ್ತ್ರೀಯರ ಸ್ಥಾನಮಾನವು ಪ್ರಗತಿಯ ಪಥದಲ್ಲಿ ಹಿಂದಿರುತ್ತದೆ. ಇದು ದೇಶದ ಅಭಿವೃದ್ಧಿಗೆ ಸಮಸ್ಯೆಯಾಗಿ ಕಾಡುತ್ತಿದೆ.

**ಚರ್ಚಿಸಿ :**

'ಮಹಿಳೆಯ ಸ್ಥಾನಮಾನವನ್ನು ಪರಿಶೀಲಿಸಿ ಆ ದೇಶದ ವ್ಯವಸ್ಥೆಯನ್ನೇ ತಿಳಿಯುಬಹುದಾಗಿದೆ'– ಪಂಡಿತ್ ಜವಹರಲಾಲ ನೆಹರೂ.


© KTBS NOT TO BE REPUBLISHED

**ಚಟುವಟಿಕೆ :**
ನಿಮ್ಮ ಸ್ಥಳೀಯ ಸಂಸ್ಥೆಯ ಮಹಿಳಾ ಸದಸ್ಯರೊಂದಿಗೆ ಮಹಿಳೆಯರ ಸ್ಥಾನಮಾನದ ಬಗ್ಗೆ ಸಂದರ್ಶನ ನಡೆಸಿ.

ಮಹಿಳೆಯರ ಶಿಕ್ಷಣ ಮತ್ತು ಅಭಿವೃದ್ಧಿಯನ್ನು ಉತ್ತಮ ಪಡಿಸಲು ಸರ್ಕಾರವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನು ಪ್ರಾರಂಭಿಸಿದೆ. ಇದರ ಮೂಲಕ ಮಹಿಳೆಯರ ಆರೋಗ್ಯ, ಶಿಕ್ಷಣ ಮತ್ತು ಸಾಮಾಜಿಕ ಕ್ಷೇತ್ರದಲ್ಲಿನ ಸ್ಥಾನಮಾನವನ್ನು ಉತ್ತಮ ಪಡಿಸಲಾಗುತ್ತಿದೆ. ಮಹಿಳೆಯರ ಸಬಲೀಕರಣಕ್ಕಾಗಿ ಮಹಿಳಾ ಶಿಕ್ಷಣ, ಬಾಲ್ಯವಿವಾಹ ನಿಷೇಧಕಾಯ್ದೆ, ವರದಕ್ಷಿಣೆ ನಿಷೇಧ ಕಾಯ್ದೆ, ಮುಂತಾದ ಕಾರ್ಯಕ್ರಮಗಳನ್ನು ರೂಪಿಸಿದೆ. ಕರ್ನಾಟಕ ಸರ್ಕಾರವು 'ಸ್ತ್ರೀ ಶಕ್ತಿ' ಎಂಬ ಕಾರ್ಯಕ್ರಮವನ್ನು ರೂಪಿಸಿ, ಗ್ರಾಮಾಂತರ ಮಹಿಳೆಯರ ವಿಕಾಸಕ್ಕೆ ಪ್ರಯತ್ನಿಸಿದೆ. ಮಹಿಳೆಯರ ಸ್ವ-ಉದ್ಯೋಗಕ್ಕಾಗಿ ಸಾಲ ಸೌಲಭ್ಯ ಮತ್ತು ಸಬ್ಸಿಡಿ ನೀಡುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಮಹಿಳಾಮಂಡಲಗಳು, ಯುವತಿ ಮಂಡಲಗಳು, ಸ್ತ್ರೀ ಶಕ್ತಿ ಸಂಘಗಳು, ಸ್ವಸಹಾಯ ಸಂಘಗಳು, ಮಹಿಳಾ ಸಹಕಾರಿ ಸಂಘಗಳು ಸ್ತ್ರೀಯರ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿವೆ. ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಮಹಿಳಾ ಆಯೋಗಗಳನ್ನು ರಚಿಸಿದ್ದು


**ಇಂದಿರಾಗಾಂಧಿ**
**ಪ್ರಥಮ ಮಹಿಳಾ ಪ್ರಧಾನಿ**


**ಪ್ರತಿಭಾ ಸಿಂಗ್ ಪಾಟೀಲ್**
**ಪ್ರಥಮ ಮಹಿಳಾ ರಾಷ್ಟ್ರಪತಿ**


**ಸರೋಜಿನಿ ನಾಯ್ಡು**
**ಪ್ರಥಮ ಮಹಿಳಾ ರಾಜ್ಯಪಾಲರು**


**ಸುಚೇತಾ ಕೃಪಲಾನಿ**
**ಪ್ರಥಮ ಮಹಿಳಾ ಮುಖ್ಯಮಂತ್ರಿ**

ಮಹಿಳೆಯರ ದೂರು-ದುಮ್ಮಾನಗಳನ್ನು ಇದು ಪರಿಶೀಲಿಸಿ ನ್ಯಾಯ ಒದಗಿಸಿಕೊಡುತ್ತಿದೆ. ಶಾಸಕಾಂಗ ಮತ್ತು ಸಂಸತ್ತಿನಲ್ಲಿ ರಾಜಕೀಯದಲ್ಲಿ ಮಹಿಳಾ ಮೀಸಲಾತಿ ನೀಡುವಂತಹ ಪ್ರಯತ್ನ ನಡೆಯುತ್ತಿದೆ. ಈಗಾಗಲೇ ಕರ್ನಾಟಕದ ಸ್ಥಳೀಯ ಸಂಸ್ಥೆಗಳಲ್ಲಿ ಶೇ. 33% ರಷ್ಟು ಮಹಿಳಾ ಮೀಸಲಾತಿಯನ್ನು ನೀಡಲಾಗಿದೆ. ಸರ್ಕಾರಿ ಉದ್ಯೋಗಗಳಲ್ಲಿ ಕೂಡಾ ಮಹಿಳೆಯರಿಗೆ ನಿಗಧಿತ ಪ್ರಮಾಣದ ಮೀಸಲಾತಿಯನ್ನು ನೀಡಲಾಗುತ್ತಿದೆ.

ಭಾರತದಲ್ಲಿ ಇಂದಿರಾಗಾಂಧಿಯವರು ಪ್ರಧಾನಮಂತ್ರಿಯಾಗಿ, ಪ್ರತಿಭಾಸಿಂಗ್ ಪಾಟೀಲ್‌ರವರು ರಾಷ್ಟ್ರಪತಿಯಾಗಿ ಕಾರ್ಯ ನಿರ್ವಹಿಸಿರುತ್ತಾರೆ. ಹಲವಾರು ಮಹಿಳೆಯರು, ರಾಜ್ಯಪಾಲರಾಗಿ, ಮುಖ್ಯ ಮಂತ್ರಿಗಳಾಗಿ, ವಿದೇಶೀ ರಾಯಭಾರಿಗಳಾಗಿ ಮತ್ತು ಇನ್ನಿತರ ಉನ್ನತ ಹುದ್ದೆಗಳನ್ನು ಅಲಂಕರಿಸಿ ಪರಿಣಾಮಕಾರಿಯಾಗಿ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ.

**6. ಆರ್ಥಿಕ ಅಸಮಾನತೆ :** ತೀವ್ರಗತಿಯಲ್ಲಿ ಕಂಡುಬರುವ ಆರ್ಥಿಕ ಅಸಮಾನತೆ ಭಾರತದಲ್ಲಿನ ಇನ್ನೊಂದು ಗಮನಾರ್ಹ ಸಮಸ್ಯೆ ಎನ್ನಬಹುದು. ಇದನ್ನು ಸಮಾಜದ ಶ್ರೀಮಂತರ ಹಾಗೂ ಬಡವರ ಮಧ್ಯೆ ಇರುವ ಅಂತರದ ಹೆಚ್ಚಳ ಎಂಬುದಾಗಿ ಗುರುತಿಸಬಹುದಾಗಿದೆ. ಇಂತಹ ಅಂತರವನ್ನು ಪಟ್ಟಣ ಪ್ರದೇಶಗಳಲ್ಲಿ ಅಂತೆಯೇ ಗ್ರಾಮೀಣ ಭಾಗಗಳಲ್ಲಿ ಸೂಕ್ಷ್ಮವಾಗಿ ಗಮನಿಸಬೇಕಾಗುತ್ತದೆ. ರಾಷ್ಟ್ರದ

@KTBS NOT TO BE REPUBLISHED

ಆರ್ಥಿಕ ಪ್ರಗತಿಯ ಉಪಯೋಗವನ್ನು ನಗರವಾಸಿಗಳಾದ ಶ್ರೀಮಂತ ವರ್ಗವೇ ಬಹುವಾಗಿ ಆಕ್ರಮಿಸುತ್ತಿರುವುದನ್ನು ಗುರುತಿಸಬೇಕಾಗಿದೆ. ಬಡಜನತೆಗೆ ಇಂತಹ ರಾಷ್ಟ್ರೀಯ ಆರ್ಥಿಕ ಪ್ರಗತಿಯ ಫಲದೊರಕುವುದು ತೀರಾ ಅಸಾಧ್ಯ ಎನಿಸುತ್ತಿದೆ. ಖಾಸಗಿ ಕ್ಷೇತ್ರದ ಅತ್ಯಂತ ಹೆಚ್ಚಿನ ಮೊತ್ತದ ವೇತನ ಶ್ರೇಣಿ, ಬಹುರಾಷ್ಟ್ರೀಯ ಕಂಪನಿಗಳ ಕಾರ್ಯಕ್ಷೇತ್ರ, ಶ್ವೇತಧಾರಿ ಅರ್ಥಾತ್ ಮೇಲುಸ್ತರದ ನೌಕರಿಗಳು, ಲಾಭ ಬಡುಕತನ, ಭ್ರಷ್ಟಾಚಾರ– ಇವೆಲ್ಲದರ ಒಟ್ಟು ಫಲಶ್ರುತಿಯಾಗಿ ಶ್ರೀಮಂತರ ಮತ್ತು ಬಡವರ ಅಂತರ ಹೆಚ್ಚಾಗುತ್ತಿದೆ.

> **ಚಟುವಟಿಕೆ :**
> ಭಾರತ ಸರ್ಕಾರ ರೂಪಿಸಿರುವ ಉದ್ಯೋಗ ಖಾತ್ರಿ, ಯೋಜನೆಯ ಬಗ್ಗೆ ಮಾಹಿತಿ ಸಂಗ್ರಹಿಸಿ. ಇದರಿಂದಾಗುತ್ತಿರುವ ಅನುಕೂಲಗಳನ್ನು ಪಟ್ಟಿಮಾಡಿ.

ಬಡವ–ಬಲ್ಲಿದರ ಮಧ್ಯೆ ಇರತಕ್ಕ ಆರ್ಥಿಕ ಅಂತರವನ್ನು ಕಡಿಮೆಗೊಳಿಸುವುದು ಸರಕಾರದ ಕರ್ತವ್ಯವಾಗಿದೆ. ನಾಡಿನ ಯೋಜನೆಗಳು ಈ ಅಂತರವನ್ನು ಕಡಿಮೆಮಾಡಿ, ಸರ್ವತೋಮುಖ ಅಭಿವೃದ್ಧಿಯೆಡೆಗೆ ಸಾಗಲು ಸಹಕಾರಿ ಎನಿಸಬೇಕು. ಬಡವರು ಹಾಗೂ ಹಿಂದುಳಿದ ಜನತೆ ಅಭಿವೃದ್ಧಿಯ ಪಾಲುದಾರರು ಎನಿಸಬೇಕೆ ವಿನಃ ಅದರ ಕಾರಣದಿಂದಾಗಿ ಇನ್ನಷ್ಟು ನಿರ್ಗತಿಕರು ಹಾಗೂ ವಸತಿಹೀನರು ಆಗಬಾರದಷ್ಟೆ. ಕೆಲವು ಬಾರಿ ಬಡರೈತರು, ಕೂಲಿಗಾರರು, ಬೃಹತ್ ಕೈಗಾರಿಕೆ, ನೀರಾವರಿ ಅಣೆಕಟ್ಟು, ಮುಂತಾದವುಗಳಿಂದಾಗಿ ತಮ್ಮ ಮನೆ ಮಠಗಳನ್ನು ಕಳೆದುಕೊಳ್ಳುತ್ತಾರೆ. ಅಂತಹ ಸಂದರ್ಭದಲ್ಲಿ ಅವರಿಗೆ ಸಮರ್ಪಕ ಪುನರ್ವಸತಿ ಹಾಗೂ ಆದಾಯ ಮೂಲಗಳನ್ನು ಒದಗಿಸುವ ಪರಿಹಾರ ಕಾರ್ಯ ಸಮರ್ಪಕವಾಗಿ ನಡೆಯಬೇಕು.

ಉತ್ತಮ ಆರ್ಥಿಕ ಸುಧಾರಣೆಗಳು, ಯೋಜನಾ ಬದ್ಧ ಹಣಕಾಸಿನ ನಿರ್ವಹಣೆ, ಒಳ್ಳೆಯ ತೆರಿಗೆ ವಿಧಾನ ಆರ್ಥಿಕ ಸಮಾನತೆಗೆ ತೀರಾ ಅತ್ಯಗತ್ಯ. ಅದೇ ರೀತಿ ಸಣ್ಣ ಹಾಗೂ ಗ್ರಾಮೀಣ ಮಟ್ಟದ ಗುಡಿ ಕೈಗಾರಿಕೆಗಳ ಅಭಿವೃದ್ಧಿ ಆರ್ಥಿಕ ಅಸಮಾನತೆಯನ್ನು ಹೋಗಲಾಡಿಸಲು ಪೂರಕ ಎನಿಸುತ್ತದೆ. ಬೃಹತ್ ಉದ್ಯಮ, ಏಕಸ್ವಾಮ್ಯ ವಲಯಗಳನ್ನು ಸರಿಯಾಗಿ ನಿಯಂತ್ರಿಸಬೇಕು. ತನ್ಮೂಲಕ, ರಾಷ್ಟ್ರೀಯ ಆದಾಯದ ಅಸಮಾನ ಹಂಚಿಕೆಯನ್ನು ತಡೆಗಟ್ಟಬಹುದು ಹಾಗೂ ಬಂಡವಾಳಶಾಹಿತ್ವವನ್ನು ಹೋಗಲಾಡಿಸಬಹುದು. ಭೂಸುಧಾರಣೆ, ಕಾರ್ಮಿಕಪರ ಧೋರಣೆಗಳು, ಸಾಮಾಜಿಕ ಭದ್ರತೆ ಮೊದಲಾದ ಕ್ರಮಗಳಿಂದ ಆರ್ಥಿಕ ಅಸಮಾನತೆಯ ವಿರುದ್ಧ ಕಾರ್ಯವೆಸಗಬಹುದು.

> **ಚರ್ಚಿಸಿ :**
> ದೇಶದ ಅಭಿವೃದ್ಧಿಗೆ ಜನಸಂಖ್ಯೆಯು ಪೂರಕವೂ ಹೌದು. ಮಾರಕವೂ ಹೌದು.

**7. ಜನಸಂಖ್ಯಾ ಹೆಚ್ಚಳ :** ಭಾರತ ಜನಸಂಖ್ಯೆಯ ಆಧಾರದಲ್ಲಿ ವಿಶ್ವದ ಎರಡನೇ ಅತೀ ದೊಡ್ಡ ದೇಶ. ಜಗತ್ತಿನ ಒಟ್ಟು ಶೇ. 2.4ನ್ನು ಭೂಭಾಗವನ್ನು ನಾವು ಹೊಂದಿದ್ದೇವೆ. 1991–2001ರ ದಶಕದಲ್ಲಿ ನಮ್ಮ ದೇಶದ ಜನಸಂಖ್ಯೆ 84 ದಶಲಕ್ಷ ಕೋಟಿಯಿಂದ 102.7 ದಶಲಕ್ಷ ಕೋಟಿ ಸಂಖ್ಯೆಗೆ ಜಿಗಿದಿದೆ. 2011ರ ಜನಗಣತಿಯ ಪ್ರಕಾರ ಈ ಸಂಖ್ಯೆ 121 ಕೋಟಿ ದಾಟಿದೆ ಹಾಗೂ ದಶಮಾನದ ಏರಿಕೆ ಸುಮಾರು 19 ಪ್ರತಿಶತ ಎನಿಸಿದೆ. ಜನನದ ಪ್ರಮಾಣದಲ್ಲಿ ಮಿತಿ ಮೀರಿದ ಹೆಚ್ಚಳ, ಮರಣದ ಪ್ರಮಾಣದಲ್ಲಿ ಇಳಿಕೆ, ಜೀವಿತಕಾಲಮಾನದಲ್ಲಿ ಗಣನೀಯ ಪ್ರಮಾಣದ ಏರಿಕೆ, ಶಿಶು ಮರಣದಲ್ಲಿ ಕಡಿತ, ಇವುಗಳು ಜನಸಂಖ್ಯೆಯ ಏರುಗತಿಗೆ ಕಾರಣವಾಗಿವೆ.

©KTBS NOT TO BE REPUBLISHED

ಕುಟುಂಬ ಯೋಜನೆ ಹಾಗೂ ತಾಯಿ ಮತ್ತು ಮಗುವಿನ ಆರೈಕೆ ಮುಂತಾದ ಕುಟುಂಬ ಕಲ್ಯಾಣ ಕಾರ್ಯಕ್ರಮಗಳು ಭಾರತದಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ಬರುತ್ತಿವೆ. ನಮ್ಮ ದೇಶದಲ್ಲಿ ಬಹುತೇಕ ಮಧ್ಯಮ ಹಾಗೂ ಆರ್ಥಿಕವಾಗಿ ಮೇಲು ವರ್ಗದ ಕುಟುಂಬಗಳು ಸಣ್ಣ ಕುಟುಂಬದ ಸೂತ್ರಗಳನ್ನು ಜಾರಿಗೆ ತರುತ್ತಿವೆ. ಜನಸಂಖ್ಯಾ ಸ್ಫೋಟದಿಂದಾಗಿ ನಿರುದ್ಯೋಗ, ಅನಕ್ಷರತೆ, ಬಡತನ, ವಸತಿ ಸೌಲಭ್ಯ ಹಾಗೂ ಆರೋಗ್ಯ ಸಮಸ್ಯೆ, ನೀರಿನ ಪೂರೈಕೆ ಮುಂತಾದ ಹತ್ತು ಹಲವು ಸಮಸ್ಯೆಗಳು ಎದುರಾಗುತ್ತವೆ. ಜನಸಂಖ್ಯೆಯೂ ರಾಷ್ಟ್ರದ ಎಲ್ಲಾ ರಾಜ್ಯಗಳಲ್ಲಿ ಸಮಾನವಾಗಿ ಹಂಚಿಕೆಯಾಗದಿರುವುದನ್ನು ಕಾಣಬಹುದು. ನಗರೀಕರಣವೂ ದೇಶದಲ್ಲಿ ಕ್ಷಿಪ್ರವಾಗಿ ನಡೆಯುತ್ತಲೇ ಇರುವುದನ್ನು ನಾವು ಗಮನಿಸಬಹುದು. ಸಮರ್ಪಕ ಹಾಗೂ ಪರಿಣಾಮಕಾರಿ ಜನಸಂಖ್ಯಾ ಧೋರಣೆಯನ್ನು ಕಾರ್ಯಗತಗೊಳಿಸುವ ಅವಶ್ಯಕತೆ ನಮ್ಮ ಪಾಲಿಗಿದೆ.

ಭಾರತ ಈ ಅಪಾರ ಜನಸ್ತೋಮವನ್ನು ರಾಷ್ಟ್ರೀಯ ಪ್ರಗತಿಗೆ ಅವಶ್ಯಕವಾದ ಮಾನವ ಸಂಪನ್ಮೂಲವನ್ನಾಗಿ ಪರಿವರ್ತಿಸುವ ಎಲ್ಲಾ ಸಾಧ್ಯತೆಗಳನ್ನೂ ಹೊಂದಿದೆ. ರಾಷ್ಟ್ರೀಯ ಮಟ್ಟದ ಯೋಜನೆಗಳು, ಪ್ರಕೃತಿ ಸಂಪತ್ತು ಹಾಗೂ ಮಾನವ ಸಂಪನ್ಮೂಲವನ್ನು ಸರಿಯಾದ ರೀತಿಯಲ್ಲಿ ಹೊಂದಾಣಿಕೆಯೊಂದಿಗೆ ಉಪಯೋಗಿಸಿಕೊಳ್ಳುವಂತಿರಬೇಕು. ಈಗ ಕೇಂದ್ರ ಸರಕಾರದ ಶಿಕ್ಷಣ ಇಲಾಖೆಯನ್ನು ಮಾನವ ಸಂಪನ್ಮೂಲ ಇಲಾಖೆ ಎಂಬುದಾಗಿ ಕರೆಯಲಾಗುತ್ತಿದೆ. ಅಕ್ಷರ ಪ್ರಸರಣ, ತಾಂತ್ರಿಕ ಶಿಕ್ಷಣ, ಕೃಷಿ ಅಭಿವೃದ್ಧಿ, ಕೈಗಾರಿಕಾ ಪ್ರಗತಿ, ರಫ್ತು ಹೆಚ್ಚಳ, ಪಟ್ಟಣ ಹಾಗೂ ಗ್ರಾಮಾಂತರ ಪ್ರದೇಶದಲ್ಲಿನ ಹೆಚ್ಚುವರಿ ಉದ್ಯೋಗವಕಾಶ ಇವೆಲ್ಲಾ ಜನಸಂಖ್ಯಾ ಸಮಸ್ಯೆಯನ್ನು ಪರಿಹರಿಸುವ ಮಾರ್ಗಗಳು. ಈ ದಿನಗಳಲ್ಲಿ ನಾವು ಗಮನಿಸಬಹುದಾದ ಇನ್ನೊಂದು ಹೊಸ ಬೆಳವಣಿಗೆಯೆಂದರೆ ಕೃಷಿ ಕ್ಷೇತ್ರಕ್ಕೆ ಅದೇ ರೀತಿ ವೃತ್ತಿ ಕೌಶಲ್ಯದ ಹಾಗೂ ಸಾಮಾನ್ಯ ಕೆಲಸಗಳಿಗೂ ಕಾರ್ಮಿಕ ವರ್ಗದವರ ಕೊರತೆ ಜನರು ವಲಸೆ ಹೋಗುತ್ತಿರುವುದಕ್ಕೆ ಇದು ಕಾರಣವಾಗಿದೆ. ದೇಶದ ಪ್ರಗತಿ ಎನ್ನುವುದು ಹೆಚ್ಚೆಚ್ಚು ಜನತೆಯ ಪಾಲ್ಗೊಳ್ಳುವಿಕೆಯ ಮುಖಾಂತರ ಆಗಬೇಕಾಗಿದೆ. ತನ್ಮೂಲಕ ಒಂದು ದಶಮಾನದೊಳಗೆ ಭಾರತದ ಜನಸಂಖ್ಯಾ ಸಮಸ್ಯೆಗೆ ಯೋಗ್ಯ ಪರಿಹಾರ ಕಂಡು ಕೊಳ್ಳಲು ಸಾಧ್ಯ ಎನಿಸಬಹುದು. ಸರಿಯಾದ ರೀತಿಯ ಯೋಜನೆಯೊಂದಿಗೆ ನಮ್ಮ ಮಾನವ ಸಂಪನ್ಮೂಲವನ್ನು ಒಂದು ಹೊರೆ ಮಾಡದೆ, ಬದಲಿಗೆ ಉತ್ತಮ, ಪೂರಕ ಆಸ್ತಿಯಾಗಿ ಪರಿವರ್ತಿಸಬಹುದಾಗಿದೆ.

**8. ಬಡತನ :** ಬಡತನ ಅಥವಾ ದಾರಿದ್ರ್ಯ ಭಾರತದ ಇನ್ನೊಂದು ಬೃಹತ್ ಸಮಸ್ಯೆ ಎನಿಸಿದೆ. ಇದು ಭಾರತದ ಅತ್ಯಂತ ವ್ಯಾಪಕ ಸಾಮಾಜಿಕ ಹಾಗೂ ಆರ್ಥಿಕ ಸಮಸ್ಯೆಯಾಗಿ ಪರಿಣಮಿಸಿದೆ. ಜನರು ಸರಿಯಾದ ಆಹಾರ, ಬಟ್ಟೆ, ವಸತಿ ಹಾಗೂ ಮೂಲಭೂತ ಸೌಕರ್ಯಗಳನ್ನು ಹೊಂದದೆ ಪಡುವ ಕಷ್ಟವನ್ನು ಬಡತನ ಎಂದು ಕರೆಯುತ್ತೇವೆ. ದಾರಿದ್ರ್ಯವನ್ನು ಸಂಪೂರ್ಣ ಅಥವಾ ಪರಸ್ಪರ ಹೋಲಿಕೆಯ ಬಡತನ ಎಂಬುದಾಗಿ ಗುರುತಿಸಬಹುದಾಗಿದೆ. ಭಾರತದ ನಗರ ಮತ್ತು ಗ್ರಾಮೀಣ ಭಾಗಗಳಲ್ಲಿ ಬಡತನ ನೆಲೆಯೂರಿದೆ.

**ಚಟುವಟಿಕೆ :**

ಬಡತನ ನಿರ್ಮೂಲನ ಮಾಡಲು ಕರ್ನಾಟಕ ಸರ್ಕಾರವು ಕೈಗೊಂಡಿರುವ ಯೋಜನೆಗಳ ಪಟ್ಟಿಮಾಡಿ.

ಬಡತನವನ್ನು ಹೋಗಲಾಡಿಸಲು ಸ್ವಾತಂತ್ರ್ಯಾನಂತರ ಹಲವಾರು ಯೋಜನೆಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೆ ತಂದಿವೆ. ಬಡಕುಟುಂಬಗಳಿಗೆ ಬಿಪಿಎಲ್ (ಬಡತನ ರೇಖೆಯ ಕೆಳಗಡೆ) ಕಾರ್ಡುಗಳನ್ನು ವಿತರಿಸಲಾಗಿದೆ. ರಾಷ್ಟ್ರದಲ್ಲಿ ಪಂಚವಾರ್ಷಿಕ ಯೋಜನೆಗಳು

© KTBS NOT TO BE REPUBLISHED

ಬಡತನ ನಿರ್ಮೂಲನಕ್ಕಾಗಿ ಹಾಗೂ ತಲಾ ಆದಾಯದ ಹೆಚ್ಚುವರಿ ಒದಗಿಸಲು ರೂಪಿಸಿ ಕಾರ್ಯಗತಗೊಳಿಸಲಾಗುತ್ತಿದೆ. ಅದೇ ರೀತಿ ಜವಾಹರ ರೋಜ್‌ಗಾರ್ ಯೋಜನೆ, ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ಪ್ರಧಾನ ಮಂತ್ರಿ ಗ್ರಾಮೋದಯ ಯೋಜನೆ ಮೊದಲಾದವುಗಳು ದಾರಿದ್ರ್ಯ ನಿರ್ಮೂಲನೆಗಾಗಿ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾಗಿವೆ. ನಮ್ಮ ದೇಶ ಅಪಾರ ಜನಸಂಪತ್ತು ಹಾಗೂ ನೈಸರ್ಗಿಕ ಸಂಪತ್ತು ಹೊಂದಿದೆ. ಇವುಗಳ ಸದ್ಬಳಕೆ ಹಾಗೂ ಅವುಗಳ ಉತ್ಪಾದನೆಗೆ ತೊಡಗಿಸಿಕೊಳ್ಳುವಿಕೆಯ ಮೂಲಕ ದೇಶದ ಬಡತನದ ಮಟ್ಟವನ್ನು ಕಡಿಮೆ ಮಾಡಬಹುದು. ಉತ್ಪಾದನಾ ಹೆಚ್ಚಳ ಹಾಗೂ ಸಮರ್ಪಕ ವಿತರಣಾ ವ್ಯವಸ್ಥೆಯ ಮೂಲಕ ರಾಷ್ಟ್ರೀಯ ಸಂಪತ್ತಿನ ಸಮಾನ ವಿತರಣೆ ಸಾಧ್ಯ.

**ಚರ್ಚಿಸಿ :**
ಕೆಲವು ಸಂದರ್ಭದಲ್ಲಿ ಈರುಳ್ಳಿ ಬೆಲೆಯು ಕೆ.ಜಿ.ಗೆ ರೂ. 80 ಇರುತ್ತದೆ. ಮತ್ತು ಕೆಲವು ಸಮಯದಲ್ಲಿ ರೂ. 20ಕ್ಕೆ ಲಭ್ಯವಿರುತ್ತದೆ. ಏಕೆ?

**9. ಲಾಭಕೋರತನ :** ಜನಸಾಮಾನ್ಯರ ಅಥವಾ ಬಳಕೆದಾರರಿಂದ ಅತ್ಯಂತ ಹೆಚ್ಚಿನ ಲಾಭಗಳಿಸುವ ಧೋರಣೆಯನ್ನು ಲಾಭಕೋರತನ ಎಂದು ಕರೆಯುತ್ತಾರೆ. ವ್ಯಾಪಾರ ವಹಿವಾಟಿನಲ್ಲಿ ಅತ್ಯಂತ ಸುಲಭ ರೀತಿಯಲ್ಲಿ ಹೆಚ್ಚು ಹಣ ದೋಚುವಿಕೆ ಒಂದು ಕೆಡುಕು ಎಂಬುದಾಗಿ ಭಾವಿಸಬೇಕಾಗುತ್ತದೆ. ಈ ರೀತಿಯಾಗಿ ಸುಲಭಗಳಿಕೆಯು ಸಮಾಜಕ್ಕೆ ಅಹಿತವನ್ನು ಉಂಟುಮಾಡುವ ಸಾಧ್ಯತೆಯೇ ಹೆಚ್ಚು. ಇದರಿಂದ ಆರ್ಥಿಕ ಅಸಮಾನತೆ ಹೆಚ್ಚಾಗುತ್ತದೆ. ಬಡತನ ಇನ್ನಷ್ಟು ಅಧಿಕ ಎನಿಸುತ್ತದೆ. ಇದರಿಂದ ಸಮಾಜದಲ್ಲಿ ಅಪರಾಧಗಳ ಏರಿಕೆಯಾಗುತ್ತದೆ. ಆರ್ಥಿಕ ರಂಗದಲ್ಲಿ ಲಾಭ ಬಡುಕತನ ಅನೈತಿಕ ವ್ಯಾಪಾರ ವಹಿವಾಟಿಗೆ ಪ್ರಚೋದನೆ ನೀಡುತ್ತದೆ. ಇದರಿಂದ ಬೆಲೆ ಏರಿಕೆ ಸತತವಾಗಿ ನಡೆದು ಹಣದುಬ್ಬರಕ್ಕೂ ಇದು ಎಡೆಮಾಡಿಕೊಡುತ್ತದೆ. ಜನಸಮುದಾಯದ ಆದಾಯದ ಬಹುಪಾಲು ಸೀಮಿತ ಶ್ರೀಮಂತ ವ್ಯಾಪಾರೀ ವರ್ಗದ ಕೈ ಸೇರುತ್ತದೆ. ಬೆಲೆಗಳ ಮೇಲೆ ಹತೋಟಿ ಇಲ್ಲದೆ ಇರುವುದು ಮಿತಿ ಮೀರಿದ ಲಾಭಕೋರತನಕ್ಕೆ ಮುಖ್ಯ ಕಾರಣ. ಉತ್ಪಾದಕರು, ಅದರಿಂದಲೂ ಹೆಚ್ಚಾಗಿ ವಿತರಕರು ಬಹುವಾಗಿ ಲಾಭದ ಪರಿಮಿತಿ ಹೊಂದುವುದರಿಂದ ಈ ಲಾಭ ಬಡುಕುತನ ಹೆಚ್ಚುವಂತಾಗಿದೆ. ಸರ್ಕಾರದ ಸಮರ್ಪಕವಾದ ಕ್ರಮದಿಂದ ಈ ಲಾಭಕೋರತನಕ್ಕೆ ನಿಯಂತ್ರಣ ಸಾಧಿಸಬೇಕಾಗಿದೆ. ಬೆಲೆಯನ್ನು ಹತೋಟಿಗೆ ತರಲು ಯತ್ನಿಸಬೇಕು. ಏಕಸ್ವಾಮ್ಯ ವ್ಯವಸ್ಥೆ, ಬಹುರಾಷ್ಟ್ರೀಯ ಕಂಪೆನಿಗಳ ವ್ಯಾಪಕತೆ, ಅನಾರೋಗ್ಯಕರ ಮಾರುಕಟ್ಟೆ ನಿಯಮಗಳು, ಅಕ್ರಮ ದಾಸ್ತಾನು, ಕಳ್ಳ ವ್ಯಾಪಾರ, ಬೆಲೆಯ ಬಗ್ಗೆ ಸರಿಯಾದ ನಿಯಂತ್ರಣ ಇಲ್ಲದಿರುವಿಕೆ ಮೊದಲಾದವು ಲಾಭಕೋರತನಕ್ಕೆ ಇರುವ ಮುಖ್ಯ ಕಾರಣಗಳು. ಕಟ್ಟುನಿಟ್ಟಿನ ಸರಕಾರೀ ನಿಯಂತ್ರಣ, ಬೆಲೆ ಸೂಚ್ಯಾಂಕಗಳ ಪರಿಶೀಲನೆ, ಸಹಕಾರೀ ಮಾರುಕಟ್ಟೆಗಳ ವಿಸ್ತರಣೆ, ಸರಿಯಾದ ತೆರಿಗೆ ಧೋರಣೆ ಇವೆಲ್ಲಾ ಲಾಭಕೋರತನವನ್ನು ನಿಯಂತ್ರಿಸುವ ವಿಧಾನಗಳು.

**10. ಕಳ್ಳ ಸಾಗಾಣಿಕೆ :** 'ಯಾವುದೇ ಆಮದು ಸುಂಕವನ್ನು ಸರ್ಕಾರಕ್ಕೆ ನೀಡದೆ ಗುಪ್ತವಾಗಿ ವಿದೇಶಗಳಿಂದ ವಸ್ತುಗಳನ್ನು ತರಿಸಿಕೊಳ್ಳುವುದನ್ನು ಕಳ್ಳಸಾಗಾಣಿಕೆ' ಎಂದು ಕರೆಯುತ್ತಾರೆ. ಕಳ್ಳ ಸಾಗಾಣಿಕೆ ರಾಷ್ಟ್ರೀಯ ಹಿತಾಸಕ್ತಿಗೆ ಮಾರಕ ಎನಿಸಿದ್ದು, ಅನಪೇಕ್ಷಿತ ಆರ್ಥಿಕ ಚಟುವಟಿಕೆಗಳಿಗೆ ಎಡೆಮಾಡಿಕೊಡುತ್ತದೆ. ಕಳ್ಳಸಾಗಾಟ ದೇಶದ ಆರ್ಥಿಕತೆಗೆ ಹಾನಿ ಒದಗಿಸುತ್ತದೆ. ದೇಶದ ಕೈಗಾರಿಕೆ ಹಾಗೂ ಮಾರುಕಟ್ಟೆಗೆ ಇಂತಹ ಕಳ್ಳಸಾಗಾಣಿಕೆಯ ದಂಧೆಯಿಂದಾಗಿ ತುಂಬಾ ಹಾನಿ ತಟ್ಟುತ್ತದೆ. ದೇಶದೊಳಗೆಯೇ ಪರ್ಯಾಯ ವಸ್ತುಗಳ ಪೂರೈಕೆಯಿಂದಾಗಿ ಈ ಕಳ್ಳಸಾಗಾಣಿಕೆಯನ್ನು ತಡೆಗಟ್ಟಬಹುದಾಗಿದೆ. ರಾಷ್ಟ್ರದ ಆಂತರಿಕ ಮಾರುಕಟ್ಟೆಯಲ್ಲಿ ಬೆಲೆಯನ್ನು ನಿಯಂತ್ರಿಸುವಿಕೆ, ಸುಯೋಗ್ಯ

© KTBS NOT TO BE REPUBLISHED

ಆಮದು–ರಪ್ತು ಧೋರಣೆ, ಕಟ್ಟುನಿಟ್ಟಿನ ಕರಾವಳಿ ಗಸ್ತು ಪಡೆಯ ಕಾರ್ಯಾಚರಣೆ, ಆರ್ಥಿಕ ಅಪರಾಧಕ್ಕೆ ಕಠಿಣ ಶಿಕ್ಷೆ, ಅಂತರರಾಷ್ಟ್ರೀಯ ಹಾಗೂ ಆಂತರಿಕ ರಾಜ್ಯಗಳ ಪರಸ್ಪರ ವ್ಯಾಪಾರ ಒಪ್ಪಂದಗಳು ಕಳ್ಳ ಸಾಗಾಣಿಕೆಯನ್ನು ನಿಯಂತ್ರಿಸುವ ಉತ್ತಮ ಉಪಾಯಗಳು. ಕಳ್ಳ ಸಾಗಾಣಿಕೆ ಒಂದು ರಾಷ್ಟ್ರ ವಿರೋಧಿ ಹಾಗೂ ಆರ್ಥಿಕ ಅಪರಾಧ ಎಂಬ ಮನೋಭಾವವನ್ನು ಜನರಲ್ಲಿ ಮೂಡಿಸಬೇಕು. ಕಳ್ಳ ಸಾಗಾಣಿಕೆಯ ವಸ್ತುಗಳನ್ನು ಸಾಮಾಜಿಕವಾಗಿ ಬಹಿಷ್ಕರಿಸುವುದರ ಮೂಲಕವೂ ಇದನ್ನು ಸಾಕಷ್ಟು ನಿಯಂತ್ರಿಸಬಹುದು.

ಭಾರತದ ಪ್ರಜೆಗಳು ಈ ಮೇಲಿನ ಸಮಸ್ಯೆಗಳ ನಿವಾರಣೆಯು ಸರ್ಕಾರದ್ದು ಎಂದು ಏಕಮುಖವಾಗಿ ಯೋಚಿಸದೆ, ತಮ್ಮ ತಮ್ಮ ಹಂತಗಳಲ್ಲಿ ಸಮಸ್ಯೆಗಳನ್ನು ನಿಯಂತ್ರಿಸುವ ಪ್ರಯತ್ನ ಮಾಡುವುದು ಉತ್ತಮ ಬೆಳವಣಿಗೆಯಾಗಲಿದೆ.

## ಅಭ್ಯಾಸಗಳು

**I. ಈ ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟಿರುವ ಜಾಗಗಳನ್ನು ಭರ್ತಿ ಮಾಡಿರಿ.**

1. ತಾವು ವಾಸಿಸುವ ಪ್ರದೇಶದ ಬಗ್ಗೆ ಅತ್ಯಂತ ಗಾಢವಾದ ಅಭಿಮಾನ ಬೆಳೆಸಿಕೊಂಡಿರುವುದನ್ನು ____________ ಎನ್ನುತ್ತೇವೆ.
2. ಭಾರತದಲ್ಲಿ ಭಾಷಾವಾರು ಪ್ರಾಂತ್ಯಗಳ ವಿಭಜನೆಯು ____________ ಇಸವಿಯಲ್ಲಿ ಆಯಿತು.
3. ಕರ್ನಾಟಕದಲ್ಲಿ ಭ್ರಷ್ಟಾಚಾರ ನಿಯಂತ್ರಿಸಲು ____________ ಸಂಸ್ಥೆ ಅಸ್ತಿತ್ವದಲ್ಲಿದೆ.
4. 2011ರ ಜನಗಣತಿ ಪ್ರಕಾರ ಭಾರತದ ಜನಸಂಖ್ಯೆಯು ____________ ಕೋಟಿ ದಾಟಿದೆ.
5. ಬಳಕೆದಾರರಿಂದ ಹೆಚ್ಚಿನ ಲಾಭ ಗಳಿಸುವ ಧೋರಣೆಯನ್ನು ____________ ಎಂದು ಕರೆಯುತ್ತಾರೆ.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿರಿ.**

1. ಕೋಮುವಾದ ದೇಶದ ಐಕ್ಯತೆಗೆ ಮಾರಕ. ಹೇಗೆ?
2. ಪ್ರಾದೇಶಿಕವಾದವು ದೇಶದ ಅಭಿವೃದ್ಧಿಗೆ ಮಾರಕವಾಗುತ್ತದೆ. ಚರ್ಚಿಸಿ.
3. ಸಾಕ್ಷರತೆಯನ್ನು ವೃದ್ಧಿಸಲು ಕೈಗೊಂಡಿರುವ ಕ್ರಮಗಳಾವುವು?
4. ಮಹಿಳೆಯರ ಸ್ಥಾನಮಾನ ಉತ್ತಮ ಪಡಿಸಲು ಸಲಹೆಗಳೇನು?
5. ದೇಶದ ಜನಸಂಖ್ಯೆಯನ್ನು ಮಾನವ ಸಂಪನ್ಮೂಲವೆಂದು ಪರಿಗಣಿಸಬಹುದಾಗಿದೆ. ಇದನ್ನು ವಿವರಿಸಿ.
6. ಕರ್ನಾಟಕ ರಾಜ್ಯದಲ್ಲಿ ಬಡತನ ನಿವಾರಣೆಗಾಗಿ ರೂಪಿಸಿರುವ ಯೋಜನೆಗಳನ್ನು ವಿವರಿಸಿ.
7. ಕಳ್ಳ ಸಾಗಾಣಿಕೆ ಎಂದರೇನು? ನಿಯಂತ್ರಣಕ್ಕೆ ಸಲಹೆಗಳೇನು?
8. 'ಲಾಭ ಬಡುಕತನದಿಂದ ಉತ್ಪಾದಕ ಮತ್ತು ಗ್ರಾಹಕನಿಗೆ ನಷ್ಟವಾಗುತ್ತದೆ' ಈ ಹೇಳಿಕೆಯನ್ನು ಹೇಗೆ ಸಮರ್ಥಿಸುತ್ತೀರಿ?

NOT TO BE REPUBLISHED
© KTBS

**III. ಚಟುವಟಿಕೆಗಳು.**

1. ನಿಮ್ಮ ಹತ್ತಿರದಲ್ಲಿರುವ ವ್ಯಾಪಾರಗಾರರನ್ನು ಭೇಟಿಯಾಗಿ ಕೆಲವು ವಸ್ತುಗಳ ಬೆಲೆ ಕೆಲವೊಮ್ಮೆ ಜಾಸ್ತಿ ಆಗುತ್ತದೆ. ಕೆಲವೊಮ್ಮೆ ಕಡಿಮೆ ಆಗುತ್ತದೆ ಇದಕ್ಕೆ ಕಾರಣಗಳನ್ನು ತಿಳಿಯಿರಿ.
2. ಪ್ರಾದೇಶಿಕವಾದವು ದೇಶದಲ್ಲಿ ಭಿನ್ನತೆಯನ್ನು ಸೃಷ್ಟಿಸುವುದರ ಬಗ್ಗೆ ಚರ್ಚಾ ಸ್ಪರ್ಧೆ ಏರ್ಪಡಿಸಿ.

@KTBS
NOT TO BE REPUBLISHED

ಅಧ್ಯಾಯ-7

# ಅನ್ಯರಾಷ್ಟ್ರಗಳೊಂದಿಗೆ ಭಾರತದ ಸಂಬಂಧ

L8Q5S1

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಭಾರತ ಮತ್ತು ಪಾಕಿಸ್ತಾನದ ಸಂಬಂಧ.
- ಭಾರತ ಮತ್ತು ಚೀನಾದ ಸಂಬಂಧ.
- ಭಾರತ ಮತ್ತು ಅಮೇರಿಕಾದ ಸಂಬಂಧ.
- ಭಾರತ ಮತ್ತು ರಷ್ಯಾದ ಸಂಬಂಧ.

ಪ್ರಚಲಿತ ಪ್ರಪಂಚವನ್ನು ವಿಶ್ವ ಕುಟುಂಬ ಎಂದು ಕರೆಯುತ್ತೇವೆ. ವಿಶ್ವದ ಏಳು ಖಂಡಗಳಲ್ಲಿ ಸುಮಾರು 198 ಸಾರ್ವಭೌಮ ರಾಷ್ಟ್ರಗಳಿವೆ. ಭಾರತ ಸ್ವತಂತ್ರ, ಸಾರ್ವಭೌಮ ರಾಷ್ಟ್ರ, ಅರ್ಥಾತ್ ಆಂತರಿಕ ಹಾಗೂ ಬಾಹ್ಯ ವಿಚಾರಗಳಲ್ಲಿ ಸ್ವಯಂ ನಿರ್ಧಾರದ ಹಕ್ಕು ಹೊಂದಿದ ದೇಶ. ನಾವೊಂದು ಸ್ವತಂತ್ರ ರಾಷ್ಟ್ರವಾಗಿ ಎಲ್ಲಾ ವಿದೇಶಗಳೊಂದಿಗೆ ಉತ್ತಮ ಸಂಬಂಧ ಹೊಂದಬೇಕಾಗಿದೆ. ಅದರಲ್ಲಿಯೂ ಮುಖ್ಯವಾಗಿ ಏಷ್ಯಾ ಖಂಡದ ನಮ್ಮ ನೆರೆಹೊರೆಯ ರಾಷ್ಟ್ರಗಳೊಂದಿಗೆ ಒಳ್ಳೆಯ ಬಾಂಧವ್ಯ ಇರಿಸಿಕೊಳ್ಳಬೇಕಾಗಿದೆ. ಆದರೆ ಇದರೊಂದಿಗೆ ರಾಷ್ಟ್ರೀಯ ಹಿತಾಸಕ್ತಿಗಳೆನಿಸಿದ ಗಡಿ ಭದ್ರತೆ, ವಿದೇಶ ವ್ಯಾಪಾರ, ಆರ್ಥಿಕ ಲಾಭ, ರಾಷ್ಟ್ರದ ಗೌರವ ಮುಂತಾದವುಗಳನ್ನು ಜೋಪಾನವಾಗಿ ಕಾಯ್ದುಕೊಳ್ಳಲಾಗಿದೆ. ಜಗತ್ತಿನ ಎಲ್ಲಾ ದೇಶಗಳೊಂದಿಗೆ ಶಾಶ್ವತ ರಾಯಭಾರ ಸಂಪರ್ಕ ಇರಿಸಿಕೊಳ್ಳಬೇಕಾಗಿದೆ. ಜಾಗತಿಕ ಕುಟುಂಬದ ಕೆಲವು ಸದಸ್ಯರೊಂದಿಗೆ ಭಾರತ ಇರಿಸಿದ ಸಂಬಂಧದ ಕಡೆಗೆ ಗಮನ ಹರಿಸೋಣ.

**ಭಾರತ ಮತ್ತು ಪಾಕಿಸ್ತಾನ :** 1947ರ ಭಾರತದ ವಿಭಜನೆ ಪಾಕಿಸ್ತಾನ ಎನ್ನುವ ರಾಷ್ಟ್ರದ ಉದಯಕ್ಕೆ ಕಾರಣವಾಯಿತು. ನಮ್ಮೆರಡು ರಾಷ್ಟ್ರಗಳ ಮಧ್ಯೆ ಭೌಗೋಳಿಕ ಸಾಮಿಪ್ಯ ಹಾಗೂ ಸಮಾನ ನಾಗರಿಕ ಪರಂಪರೆ ಇದೆ. ನಾವು ಹಲವಾರು ಶತಮಾನಗಳ ಸಮಾನ ಇತಿಹಾಸವನ್ನು ಹೊಂದಿದ್ದೇವೆ. ಪಾಕಿಸ್ತಾನದೊಂದಿಗೆ ಉತ್ತಮ ಬಾಂಧವ್ಯವನ್ನು ಭಾರತ ಬಯಸುತ್ತದೆ. ಆದರೆ ಪಾಕಿಸ್ತಾನದ ಮಿಲಿಟರಿ-ಶಾಹಿತ್ವ ಹಾಗೂ ರಾಜಕೀಯ ಅಸ್ಥಿರತೆಯಿಂದಾಗಿ ಆ ರಾಷ್ಟ್ರ ನಮ್ಮೊಂದಿಗೆ ಒಳ್ಳೆಯ ಸಂಬಂಧವನ್ನು ಇರಿಸಿಕೊಂಡಿಲ್ಲ. ಭಾರತ ಮತ್ತು ಪಾಕಿಸ್ತಾನಗಳ ಮಧ್ಯೆ 1947-48ರಲ್ಲಿ, 1965, 1971 ಹಾಗೂ ಪುನಃ 1999ರಲ್ಲಿ (ಕಾರ್ಗಿಲ್‌ಯುದ್ಧ) ಯುದ್ಧಗಳು ಸಂಭವಿಸಿದವು. ಈ ಎಲ್ಲಾ ಯುದ್ಧಗಳಲ್ಲಿ ಭಾರತ ವಿಜಯ ಗಳಿಸಿತು. ಕಾಶ್ಮೀರ ಸಮಸ್ಯೆ ಹಾಗೂ ಭಯೋತ್ಪಾದನೆ - ಈ ಎರಡು ಸಮಸ್ಯೆಗಳ ಪರಿಣಾಮಕಾರಿ ಪರಿಹಾರ ಭಾರತ-ಪಾಕಿಸ್ತಾನ ಸಂಬಂಧ ಸುಧಾರಣೆಗೆ ಅತ್ಯಗತ್ಯ. ಸುಮಾರು ಮೂರನೇ ಒಂದಂಶದಷ್ಟು ಕಾಶ್ಮೀರದ ಭೂಭಾಗ ಈಗಲೂ ಪಾಕಿಸ್ತಾನದ ಸ್ವಾಧೀನದಲ್ಲಿದೆ. ಪಾಕಿಸ್ತಾನ ಭಯೋತ್ಪಾದಕತೆಯನ್ನು ಪ್ರಚೋದಿಸಬಾರದು ಹಾಗೂ ನಮ್ಮ ರಾಷ್ಟ್ರೀಯ ಹಿತಾಸಕ್ತಿಗೆ ತೊಂದರೆಯಾಗದಂತೆ ವ್ಯವಹರಿಸಬೇಕೆಂದು ನಾವು ಒತ್ತಾಯಿಸುತ್ತಿದ್ದೇವೆ. ದೂರಗಾಮಿ ಭಾರತ - ಪಾಕಿಸ್ತಾನ ಶಾಂತಿಯುತ ಸಂಬಂಧ ಸೂಕ್ತವಾಗಿ ಇನ್ನೂ ಮೂಡಿಬಂದಿಲ್ಲ. ಭಾರತವನ್ನು ಶತ್ರುರಾಷ್ಟ್ರವಾಗಿ ಮಾತ್ರ ಕಾಣುವಾಗ, ಪಾಕಿಸ್ತಾನವು ಒಳ್ಳೆಯ ಸಂಬಂಧ ಬೆಳೆಸುವ ಲಕ್ಷಣಗಳು ಕಡಿಮೆಯಿವೆ.

**ಚಟುವಟಿಕೆ :**

ಭಾರತ-ಪಾಕಿಸ್ತಾನದ ಇತ್ತೀಚಿನ ಸಂಬಂಧಗಳಿಗೆ ಸಂಬಂಧಿಸಿದಂತೆ ದಿನ ಪತ್ರಿಕೆಗಳಲ್ಲಿ ಬರುವ ಮಾಹಿತಿ ಸಂಗ್ರಹಿಸಿ ಓದಿರಿ.

©KTBS NOT TO BE REPUBLISHED

**2. ಭಾರತ ಮತ್ತು ಚೀನಾ :** ಚೀನಾ ನಮ್ಮ ಉತ್ತರ ಭಾಗದಲ್ಲಿರುವ ಬೃಹತ್ ನೆರೆಯ ರಾಷ್ಟ್ರ. ಇತಿಹಾಸದ ಉದ್ದಕ್ಕೂ ಈ ರಾಷ್ಟ್ರಗಳು ಪರಸ್ಪರ ಸಂಬಂಧಗಳನ್ನು ಬೆಳೆಸಿಕೊಂಡಿವೆ. ಅಕ್ಟೋಬರ್ 1949ರಲ್ಲಿ ಚೈನಾ ಕಮ್ಯುನಿಸ್ಟ್ ರಾಷ್ಟ್ರವೆಂದು ಉದಯಿಸಿದಾಗ ಅದನ್ನು ಮಾನ್ಯತೆ ಮಾಡಿದ ಪ್ರಪ್ರಥಮ ರಾಷ್ಟ್ರ ಭಾರತ. ಪಂಚಶೀಲ ಹಾಗೂ ಹಿಂದಿ–ಚೀನೀ ಭಾಯಿಭಾಯಿ ತತ್ವದ ಆಧಾರದಲ್ಲಿ ಪರಸ್ಪರ ಭಾರತ–ಚೀನಾ ಸಂಬಂಧವನ್ನು ಬೆಳೆಸಿಕೊಳ್ಳಲು ಯತ್ನಿಸಲಾಯಿತು. ಆದರೆ ಈ ರಚನಾತ್ಮಕ ಸಹಕಾರ, ನಿರೀಕ್ಷಿಸಿದ ಫಲವನ್ನು ನೀಡಿರುವುದಿಲ್ಲ.

ಭಾರತದ ಧೋರಣೆಯ ವಿರುದ್ಧ ಚೈನಾ ಟಿಬೇಟನ್ನು ವಶಪಡಿಸಿಕೊಂಡಿತು. 1962ರಲ್ಲಿ ಚೀನಾ ಭಾರತವನ್ನು ಆಕ್ರಮಿಸಿತು ಹಾಗೂ ಯುದ್ಧದಲ್ಲಿ ಭಾರತ ಸೋಲು ಅನುಭವಿಸಿತು. ನಮ್ಮ ರಾಜ್ಯಗಳಲ್ಲೊಂದಾದ ಅರುಣಾಚಲ ಪ್ರದೇಶವನ್ನು ಚೈನಾ ತನ್ನದೆಂದು ಪ್ರತಿಪಾದಿಸುತ್ತಿದ್ದು ಈ ವಿಷಯ ಭಾರತ–ಚೈನಾಗಳ ಪರಸ್ಪರ ಸಂಬಂಧದ ಮೇಲೆ ದುಷ್ಪರಿಣಾಮ ಬೀರುವಂತಹದು. ಮಾವೋವಾದಿಗಳು ಭಾರತದಲ್ಲಿ ನಕ್ಸಲವಾದವನ್ನು ಪಸರಿಸುವುದರಿಂದ ಈ ಎರಡು ರಾಷ್ಟ್ರಗಳ ಮಧ್ಯೆ ಮನಸ್ತಾಪವಿದೆ. ಭಾರತ ಚೈನಾದ ಮಧ್ಯೆ ಇರುವ ಗಡಿಯೂ ಅಂತಿಮವಾಗಿ ನಿರ್ಣಯವಾಗಿಲ್ಲ. ಹೀಗಾಗಿ ನಮ್ಮೆರಡು ರಾಷ್ಟ್ರಗಳ ಮಧ್ಯೆ ಗಡಿ ರೇಖೆ ನಿಖರವಾಗಿ ಇರುವುದಿಲ್ಲ. ಬದಲಾಗಿ ವಾಸ್ತವಿಕ ನಿಯಂತ್ರಣ ರೇಖೆ ಮಾತ್ರ ಈ ಎರಡು ರಾಷ್ಟ್ರಗಳ ಮಧ್ಯೆ ಇರುತ್ತದೆ. ಅಣ್ವಸ್ತ್ರಗಳ ತಯಾರಿ, ವಿದೇಶೀ ವ್ಯಾಪಾರದ ಸವಾಲುಗಳು, ಗಡಿಯಲ್ಲಿ ಮಿಲಿಟರಿ ಪಡೆಗಳ ಅತಿಕ್ರಮಣ ಇವೆಲ್ಲಾ ಚೈನಾದ ಬಗೆಗೆ ಭಾರತದ ನೀತಿಯ ಮೇಲೆ ಪರಿಣಾಮ ಬೀರುತ್ತವೆ.

**3. ಭಾರತ ಮತ್ತು ಅಮೆರಿಕ :** ಭಾರತ ಹಾಗೂ ಅಮೆರಿಕಾ ಸಂಯುಕ್ತ ಸಂಸ್ಥಾನ ಎರಡು ಬೃಹತ್ ರಾಷ್ಟ್ರಗಳು ಹಾಗೂ ಪ್ರಜಾತಂತ್ರ ವ್ಯವಸ್ಥೆ ಹೊಂದಿದವುಗಳು. ಪ್ರಚಲಿತ ಜಾಗತಿಕ ವಿದ್ಯಮಾನದಲ್ಲಿ ಈ ಎರಡು ರಾಷ್ಟ್ರಗಳ ಪರಸ್ಪರ ಮೈತ್ರಿ ತುಂಬಾ ಪ್ರಾಮುಖ್ಯ ಎನಿಸುವಂತಹುದು. 1947 ರ ಬಳಿಕ ಈ ಎರಡು ರಾಷ್ಟ್ರಗಳ ಸಂಬಂಧ ರಾಷ್ಟ್ರೀಯ ಹಿತಾಸಕ್ತಿಗಳನ್ನು ಆಧರಿಸಿ ಹಲವಾರು ಸ್ಥಿತ್ಯಂತರಗಳನ್ನು ಕಂಡಿದೆ. ಜಗತ್ತು ರಾಜಕೀಯ ದ್ರುವೀಕರಣವನ್ನು ಕಂಡಾಗ, ಭಾರತ ಅಲಿಪ್ತ ನೀತಿ ಅನುಸರಿಸಿತು. ಹಾಗೂ ಅಮೆರಿಕಾ ನಾಯಕತ್ವದ ಪ್ರಜಾಪ್ರಭುತ್ವ ಗುಂಪಿನಿಂದ ಅಂತೆಯೇ ಸೋವಿಯತ್ ರಷ್ಯಾದ ಹಿರಿತನದ ಕಮ್ಯುನಿಸ್ಟ್ ಬಣದಿಂದ ಸಮಾನ ದೂರದಲ್ಲಿರುವ ನೀತಿ ಅನುಸರಿಸಿತು. ಭಾರತದ ಪಂಚವಾರ್ಷಿಕ ಯೋಜನೆಗೆ ಅಮೆರಿಕಾ ತುಂಬಾ ಸಹಾಯ ನೀಡಿತು. 1962ರ ಚೀನಾ ಆಕ್ರಮಣ ಸಂದರ್ಭದಲ್ಲಿಯೂ ಅಮೆರಿಕಾದ ಸಹಾಯ ನಮಗೆ ತುಂಬಾ ಶಕ್ತಿ ನೀಡಿತು. ಆದರೆ ಆ ಬಳಿಕ ಅಲ್ಲಿನ ರಾಜಕೀಯ ಮುಖಂಡರು ಭಾರತ–ಪಾಕಿಸ್ತಾನ ಯುದ್ಧಗಳ ವೇಳೆ ಪಾಕಿಸ್ತಾನಕ್ಕೆ ಸಹಾಯ ನೀಡಿದರು. ಅನೇಕ ಬಾರಿ ಅಮೆರಿಕಾದ ವಿದೇಶಾಂಗ ನೀತಿ ಭಾರತದ ವಿರುದ್ಧವಿದ್ದು ಪಾಕಿಸ್ತಾನದ ಪರವಾಗಿತ್ತು. ಭಯೋತ್ಪಾದನೆಯನ್ನು ಹತ್ತಿಕ್ಕುವಲ್ಲಿ ನಮ್ಮೆರಡು ರಾಷ್ಟ್ರಗಳ ಮಧ್ಯೆ ಸಮಾನ ಹಿತಾಸಕ್ತಿಯಿದೆ. ಭಾರತ ವಿದೇಶೀ ವ್ಯಾಪಾರ, ವಿಜ್ಞಾನ ಮತ್ತು ತಾಂತ್ರಿಕತೆ, ಬಾಹ್ಯಾಕಾಶ, ಶಿಕ್ಷಣ ಮುಂತಾದ ಕ್ಷೇತ್ರಗಳಲ್ಲಿ ಅಮೆರಿಕಾದೊಂದಿಗೆ ಉತ್ತಮ ಬಾಂಧವ್ಯ ಹೊಂದಿದೆ. ವಿಶ್ವಸಂಸ್ಥೆಯನ್ನು ಬಲಪಡಿಸುವ ಹಾಗೂ ಜಾಗತಿಕ ಶಾಂತಿಯನ್ನು ಉಳಿಸುವ ನಿಟ್ಟಿನಲ್ಲಿ ಎರಡೂ ರಾಷ್ಟ್ರಗಳು ಸಮಾನ ಧೋರಣೆ ಹೊಂದಿವೆ. ಅಮೆರಿಕಾದ ರಿಪಬ್ಲಿಕನ್ ಹಾಗೂ ಡೆಮಾಕ್ರೆಟಿಕ್ ಪಕ್ಷಗಳಿಗೆ ಸೇರಿದ ರಾಷ್ಟ್ರಾಧ್ಯಕ್ಷರ ಧೋರಣೆಗಳನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದ್ದು ಹಾಗೂ ಅದಕ್ಕನುಗುಣವಾಗಿ ಭಾರತವೂ ತನ್ನ ವಿದೇಶಾಂಗ ನೀತಿಯನ್ನು ಸಿದ್ಧಪಡಿಸುತ್ತಿದೆ.

©KTBS NOT TO BE REPUBLISHED

**4. ಭಾರತ ಮತ್ತು ರಷ್ಯಾ :** ಭಾರತ ರಷ್ಯಾ ದೇಶದೊಂದಿಗೆ ಉತ್ತಮ ಬಾಂಧವ್ಯ ಹೊಂದಿದೆ ಹಾಗೂ ಅದರ ಹಿಂದಿನ ಸೋವಿಯತ್ ರಷ್ಯಾ ಒಕ್ಕೂಟದೊಂದಿಗೂ ಅಂತಹದೇ ಒಳ್ಳೆಯ ಸಂಬಂಧ ಹೊಂದಿತ್ತು. ಭಾರತ ಅಲಿಪ್ತ ನೀತಿ ಹೊಂದಿದ್ದರೂ, ಭಾರತ–ಸೋವಿಯತ್ ಒಪ್ಪಂದವು ರಾಜಕೀಯ, ಆರ್ಥಿಕ ಹಾಗೂ ಇತರ ಕ್ಷೇತ್ರಗಳಲ್ಲಿ ಉತ್ತಮ ಪ್ರಗತಿಯನ್ನು ಕಂಡಿತು. 1962ರಲ್ಲಿನ ಚೈನಾ ದಾಳಿಯನ್ನು ಸೋವಿಯತ್ ರಷ್ಯಾ ಖಂಡಿಸಿತ್ತು. 1961 ರಲ್ಲಿ ಗೋವಾ ವಿಮೋಚನೆಯ ಸಂದರ್ಭದಲ್ಲಿ ಸೋವಿಯತ್ ರಷ್ಯಾ ಭಾರತಕ್ಕೆ ವಿಶ್ವ ಸಂಸ್ಥೆಯಲ್ಲಿ ಸಹಕಾರ ನೀಡಿತ್ತು. 1966ರ ತಾಷ್ಕೆಂಟಿನಲ್ಲಿ ಭಾರತ–ಪಾಕಿಸ್ತಾನಗಳ ಮಧ್ಯೆ ಒಪ್ಪಂದಕ್ಕೆ ರಷ್ಯಾ ಸಹಕರಿಸಿತು. 1971 ರಲ್ಲಿ ಭಾರತ ಮತ್ತು ರಷ್ಯಾ 20 ವರ್ಷಗಳ ಶಾಂತಿ, ಮೈತ್ರಿ ಹಾಗೂ ಸಹಕಾರದ ಒಪ್ಪಂದಕ್ಕೆ ಸಹಿ ಹಾಕಿದವು. ಭಾರತದ ಭಿಲ್ಲಾ ಹಾಗೂ ಭೋಕಾರೋ ಉಕ್ಕಿನ ಕಾರ್ಖಾನೆಗಳಿಗೆ ಸೋವಿಯತ್ ರಷ್ಯಾ ಸಹಕರಿಸಿತ್ತು. ನಮ್ಮ ರಾಷ್ಟ್ರದ ಕೈಗಾರಿಕೆ ಹಾಗೂ ವಾಣಿಜ್ಯ ಕ್ಷೇತ್ರಗಳ ಬೆಳವಣಿಗೆಗೆ ರಷ್ಯಾದಿಂದ ಹೆಚ್ಚಿನ ನೆರವು ಪಡೆದಿದ್ದೇವೆ. ವಿಶ್ವಸಂಸ್ಥೆಯ ಭದ್ರತಾ ಸಮಿತಿಯಲ್ಲಿ ಭಾರತಕ್ಕೆ ಖಾಯಂ ಸದಸ್ಯತ್ವ ದೊರೆಯಬೇಕೆಂದು ರಷ್ಯಾ ಪ್ರತಿಪಾದಿಸುತ್ತಿದೆ.

ಭಾರತವು ತನ್ನ ಸಮೀಪದ ದೇಶಗಳಾದ ಭೂತಾನ್, ಅಫ್ಘಾನಿಸ್ತಾನ, ಮಾಲ್ಡೀವ್ಸ್, ಇಂಡೋನೇಶಿಯಾ ಹಾಗೂ ವಿಶ್ವದ ವಿವಿಧ ಖಂಡಗಳ ರಾಷ್ಟ್ರಗಳೊಂದಿಗೆ ತನ್ನ ನಿಕಟ ಸಂಬಂಧ ಹೊಂದಿದೆ.

## ಅಭ್ಯಾಸಗಳು

**I. ಈ ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟಿರುವ ಜಾಗಗಳನ್ನು ಭರ್ತಿ ಮಾಡಿರಿ.**

1. ಭಾರತವು ____________ ಖಂಡದಲ್ಲಿದೆ.
2. ಭಾರತದ ಭಿಲ್ಲಾ ಹಾಗೂ ಭೋಕಾರೋ ಉಕ್ಕಿನ ಕಾರ್ಖಾನೆಗಳಿಗೆ ____________ ದೇಶವು ಸಹಕರಿಸಿತ್ತು.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರ ಬರೆಯಿರಿ.**

1. ಅನ್ಯ ರಾಷ್ಟ್ರಗಳೊಂದಿಗೆ ಉತ್ತಮ ಬಾಂಧವ್ಯ ಅವಶ್ಯಕ ಏಕೆ?
2. ಭಾರತ ಮತ್ತು ಪಾಕಿಸ್ತಾನದ ಮಧ್ಯೆ ಉದ್ವಿಗ್ನತೆಗೆ ಕಾರಣವಾದ ವಿಷಯಗಳು ಯಾವುವು?
3. ಇತ್ತೀಚಿನ ದಿನಗಳಲ್ಲಿ ಚೀನಾದೊಂದಿಗೆ ನಮ್ಮ ಬಾಂಧವ್ಯ ಹದಗೆಡಲು ಕಾರಣಗಳಾವುವು?
4. ಭಾರತ ಮತ್ತು ಅಮೆರಿಕಾ ದೇಶಗಳು ಪ್ರಜಾತಂತ್ರ ದೇಶಗಳಾಗಿದ್ದು. ಇವುಗಳ ಪರಸ್ಪರ ಸೌಹಾರ್ದತೆಯು ಹೇಗಿದೆ ಎಂಬುದನ್ನು ವಿವರಿಸಿ.
5. ರಷ್ಯಾದೊಂದಿಗೆ ಭಾರತದ ಸಂಬಂಧವನ್ನು ವಿವರಿಸಿ.

**III. ಚಟುವಟಿಕೆ.**

ಭಾರತದ ಭೂಪಟ ಬಿಡಿಸಿ, ನೆರೆ ರಾಷ್ಟ್ರಗಳನ್ನು ಗುರುತಿಸಿ.

© KTBS NOT TO BE REPUBLISHED

# ಸಮಾಜಶಾಸ್ತ್ರ

## ಅಧ್ಯಾಯ – 8

## ಸಾಮಾಜಿಕ ಸ್ತರವಿನ್ಯಾಸ

F9M3A5

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಸಾಮಾಜಿಕ ಸ್ತರವಿನ್ಯಾಸ.
- ಜನರಲ್ಲಿನ ಭಿನ್ನತೆ.
- ಅಸ್ಪೃಶ್ಯತೆಯು ಒಂದು ಸಾಮಾಜಿಕ ಪಿಡುಗು.
- ಅಸ್ಪೃಶ್ಯತೆಯ ನಿವಾರಣಾ ಕ್ರಮಗಳು.

ಸಾಮಾಜಿಕ ಸ್ತರವಿನ್ಯಾಸವೆಂದರೆ ಜನರನ್ನು ಆದಾಯ, ಶಿಕ್ಷಣ, ಜಾತಿ, ಬಣ್ಣ, ಲಿಂಗ, ಉದ್ಯೋಗ, ಬುದ್ಧಿಶಕ್ತಿ ಮೊದಲಾದವುಗಳ ಆಧಾರದ ಮೇಲೆ ಮೇಲು–ಕೀಳು ಎಂದು ವಿಂಗಡಿಸುವುದಾಗಿದೆ. ಸ್ತರವಿನ್ಯಾಸವು ಸಮಾಜದಿಂದ ನಿರ್ಮಿಸಲ್ಪಟ್ಟಿದೆ. ಉದಾಹರಣೆಗೆ, ಶ್ರೀಮಂತ ಕುಟುಂಬದಲ್ಲಿ ಜನಿಸಿದ ಮಕ್ಕಳಿಗೆ ಉತ್ತಮವಾದ ಪೌಷ್ಟಿಕ ಆಹಾರ, ಶಾಲೆ, ಉದ್ಯೋಗ ದೊರಕುವ ಅವಕಾಶಗಳು ಹೆಚ್ಚಾಗಿರುತ್ತವೆ. ಆದರೆ ಬಡವರ ಮಕ್ಕಳಿಗೆ ಮೇಲಿನ ಅವಕಾಶಗಳು ಕಡಿಮೆ. ಶ್ರೀಮಂತರು, ಬಡವರು ಎಂದು ಸಮಾಜವು ವರ್ಗೀಕರಣವಾಗಿರುವುದಕ್ಕೆ ಮಕ್ಕಳು ಕಾರಣವಲ್ಲ. ಆದರೆ ಸಮಾಜ ಮಾಡಿರುವ ಸ್ತರವಿನ್ಯಾಸದ ಕೆಟ್ಟ ಪರಿಣಾಮಗಳನ್ನು ಶೋಷಿತರು ಅನುಭವಿಸುತ್ತಾರೆ.

ಸಾಮಾಜಿಕ ಸ್ತರವಿನ್ಯಾಸವು ಕಾಲದಿಂದ ಕಾಲಕ್ಕೆ ಹಾಗೂ ದೇಶದಿಂದ ದೇಶಕ್ಕೆ ಭಿನ್ನವಾಗಿರಬಹುದು. ಉದಾಹರಣೆಗೆ – ಭಾರತದಲ್ಲಿ ಸಾವಿರಾರು ವರ್ಷಗಳಿಂದ ಜಾತಿಪದ್ಧತಿಯು ಅಸ್ತಿತ್ವದಲ್ಲಿದೆ. ಈ ಪದ್ಧತಿಯು ಮೇಲು ಕೀಳಿನ ವ್ಯವಸ್ಥೆಯಾಗಿದೆ. ಆದುದರಿಂದ ಕೆಲವು ಕೆಳಜಾತಿಯ ಜನರನ್ನು ಶೂದ್ರರು, ಅಸ್ಪೃಶ್ಯರೆಂದು ಪರಿಗಣಿಸಿ ಅವರ ಆಹಾರ, ಉದ್ಯೋಗ ಮತ್ತು ಬದುಕಿನ ಹಕ್ಕನ್ನು ಕಸಿದುಕೊಳ್ಳಲಾಗಿತ್ತು. ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರಗಳು ಸಂವಿಧಾನಾತ್ಮಕವಾಗಿ ಪ್ರಯತ್ನಿಸಿವೆ.

ಸಾಮಾಜಿಕ ಸ್ತರವಿನ್ಯಾಸವು ಎಲ್ಲಾ ಸಮಾಜಗಳಲ್ಲಿ ಕಂಡುಬರುತ್ತದೆ. ಅಮೆರಿಕಾದಲ್ಲಿ ಬಿಳಿಯ ಚರ್ಮದ ಜನರು ಕಪ್ಪು ಚರ್ಮದ ಜನರನ್ನು ಗುಲಾಮರಂತೆ ನಡೆಸಿಕೊಂಡು ಮಾರಾಟ ಮಾಡುತ್ತಿದ್ದರು. ಹಾಗೆಯೇ ಎಲ್ಲಾ ಕಡೆಯೂ ಬಡವರು ಮತ್ತು ಶ್ರೀಮಂತರು ಎಂಬ ಭೇದಭಾವವು ಕಂಡುಬರುತ್ತದೆ.

**ಚಟುವಟಿಕೆ :**

ಸಮಾಜದಲ್ಲಿನ ಭೇದಭಾವದ ನಿವಾರಣೆಗಾಗಿ ಸರ್ಕಾರವು ಕೈಗೊಳ್ಳುತ್ತಿರುವ ಯೋಜನೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿ.

ಸಾಮಾಜಿಕ ಸ್ತರವಿನ್ಯಾಸದ ವ್ಯವಸ್ಥೆಯು ಅಸಮಾನತೆಯನ್ನು, ಭಿನ್ನತೆಯನ್ನು ಉಂಟುಮಾಡುತ್ತದೆ. ಕೀಳು ಎಂದು ವರ್ಗೀಕರಿಸಲ್ಪಟ್ಟಿರುವ ಜನರನ್ನು ಅವಮಾನಿಸುತ್ತದೆ. ಉದಾ: ಕಪ್ಪು ಜನರು ಬಿಳಿಯ

© KTBS NOT TO BE REPUBLISHED

ಜನರ ಶಾಲೆಗಳಿಗೆ ಹೋಗುವಂತಿರಲಿಲ್ಲ. ಭಾರತದಲ್ಲಿ ಅಸ್ಪೃಶ್ಯರಿಗೆ ಸಾರ್ವಜನಿಕ ಬಾವಿ, ಕೆರೆಯಲ್ಲಿನ ನೀರನ್ನು ಬಳಸಲು ಬಿಡುತ್ತಿರಲಿಲ್ಲ.

**ತಾರತಮ್ಯದಿಂದ ಉಂಟಾದ ಪೂರ್ವಾಗ್ರಹ :**

'ಮಾನವಕುಲ ತಾನೊಂದೇ ವಲಂ' ಎಂದು ಬಹಳ ಹಿಂದೆಯೇ ಆದಿಕವಿ ಪಂಪನು ವ್ಯಕ್ತಪಡಿಸಿರುವನು. ಇದು ಮಾನವರೆಲ್ಲರೂ ಕೂಡಾ ಒಂದೇ ಎಂಬುದನ್ನು ಸೂಚಿಸುತ್ತದೆ. ಆದಾಗ್ಯೂ ಕೂಡಾ ಸಮಾಜದಲ್ಲಿ ಮನುಷ್ಯರು ಸೃಷ್ಟಿಸಿಕೊಂಡಿರುವ ಅನೇಕ ನಿರ್ಮಿತಗಳಾದ ಜಾತಿ ತಾರತಮ್ಯ, ಲಿಂಗತಾರತಮ್ಯ, ಪ್ರಾದೇಶಿಕ ತಾರತಮ್ಯ, ಬಡವ-ಬಲ್ಲಿದ ಮೊದಲಾದ ರೀತಿಯ ತಾರತಮ್ಯಗಳು ಪೂರ್ವಾಗ್ರಹಕ್ಕೆ ಕಾರಣವಾಗಿವೆ. ಒಬ್ಬ ವ್ಯಕ್ತಿ ಅಥವಾ ಒಂದು ಸಮೂಹದವರ ಬಗ್ಗೆ ಹೊಂದಿರಬಹುದಾದ ಪೂರ್ವ ನಿರ್ಧಾರಿತ ಮನೋಭಾವನೆಯೇ ಪೂರ್ವಾಗ್ರಹ ಎನಿಸಿಕೊಳ್ಳುವುದು. ಈ ಪೂರ್ವಾಗ್ರಹವು ಧನಾತ್ಮಕವಾಗಿಯೂ ಇರಬಹುದು, ಇಲ್ಲವೇ ಋಣಾತ್ಮಕವಾಗಿಯೂ ಇರಬಹುದು. ಆದರೆ ತಾರತಮ್ಯದಿಂದ ಉಂಟಾದಂತಹ ಪೂರ್ವಾಗ್ರಹವು ಅಸಹನೆ, ತಿರಸ್ಕಾರ, ಅಗೌರವ, ದ್ವೇಷ ಮುಂತಾದ ಭಾವನೆಗಳನ್ನು ಬೆಳೆಸಿಕೊಳ್ಳಲು ಆಸ್ಪದ ಮಾಡಿ ಕೊಡುತ್ತದೆ. ಇದರಿಂದ ಸಾಮಾಜಿಕ ಅಂತರ ಹೆಚ್ಚಿ ಸಾಮಾಜಿಕ ಸಂಘರ್ಷಕ್ಕೆ ಕಾರಣವಾಗುತ್ತದೆ.

**ಅಸ್ಪೃಶ್ಯತೆ-ಸಾಮಾಜಿಕ ಪಿಡುಗು :**

ಭಾರತದಲ್ಲಿ ಸ್ತರವಿನ್ಯಾಸ ವ್ಯವಸ್ಥೆಯನ್ನು ಜಾತಿ-ಪದ್ಧತಿಯಲ್ಲಿ ಗುರುತಿಸಬಹುದಾಗಿದೆ. ಭಾರತದಲ್ಲಿನ ಜನ ಸಾವಿರಾರು ಜಾತಿ ಸಮೂಹಗಳಲ್ಲಿ ಹಂಚಿ ಹೋಗಿದ್ದಾರೆ. ಈ ಜಾತಿಗಳಲ್ಲಿ ಕೆಲವು ಮೇಲುಜಾತಿಗಳು ಎನಿಸಿಕೊಂಡರೆ ಮತ್ತೆ ಕೆಲವು ಕೆಳಜಾತಿಗಳು ಎನಿಸಿಕೊಂಡಿವೆ. ಜಾತಿಯ ಸ್ತರವಿನ್ಯಾಸದಲ್ಲಿ ಅಸ್ಪೃಶ್ಯರನ್ನು ಸಮಾಜವು ಕಡೆಯ ಹಂತದವರೆಂದು ಪರಿಗಣಿಸಿತ್ತು.

> **ನಿಮಗಿದು ತಿಳಿದಿರಲಿ :**
>
> **ಧನಾತ್ಮಕ ಪೂರ್ವಾಗ್ರಹ :** 'ನಮ್ಮವರು' ಎಂಬುವವರೆಲ್ಲ 'ಒಳ್ಳೆಯವರು' ಎಂದು ಭಾವಿಸುವ ಪ್ರವೃತ್ತಿಯಿದೆ. ಇದು ನಾವು ನಮ್ಮವರು, ನಾವು ಪರಸ್ಪರ ಒಂದು ಗೂಡಿದವರು ಎಂಬ ಸಾಮರಸ್ಯದ ಆರೋಗ್ಯಕರ ಭಾವನೆಯನ್ನು ಕೂಡ ಮೂಡಿಸುತ್ತದೆ. ಅತಿರೇಕಕ್ಕೆ ಹೋದರೆ ಇದರಿಂದಲೂ ಹಾನಿಯಿದೆ.

ಅಸ್ಪೃಶ್ಯತೆ ನಮ್ಮ ಸಮಾಜದ ಅಮಾನುಷವಾದ ಆಚರಣೆ. ಮಹಾತ್ಮ ಗಾಂಧೀಜಿಯವರು ಅಸ್ಪೃಶ್ಯತೆಯನ್ನು ಹಿಂದೂ ಸಮಾಜಕ್ಕೆ ಹತ್ತಿದ ಕಳಂಕ ಎಂದು ಹೇಳಿದ್ದಾರೆ. ಅಸ್ಪೃಶ್ಯತೆ ಆಚರಣೆಯ ಪರಿಣಾಮದಿಂದಾಗಿ ಅದಕ್ಕೆ ಒಳಗಾದ ಕೆಳಜಾತಿಗಳು ಸಾಮಾಜಿಕ, ಸಾಂಸ್ಕೃತಿಕ, ಧಾರ್ಮಿಕ, ಶೈಕ್ಷಣಿಕ ಹಾಗೂ ರಾಜಕೀಯ ಅನುಕೂಲ ಮತ್ತು ಅವಕಾಶಗಳನ್ನು ಪಡೆಯುವುದರಿಂದ ವಂಚಿತವಾದವು. ಈ ಸ್ಥಿತಿ ಕೆಲವು ಶತಮಾನಗಳವರೆಗೂ ಮುಂದುವರೆದಿತ್ತು. ಆದರೆ ಇಂದು ಪರಿಸ್ಥಿತಿ ಬದಲಾಗಿದೆ. ಈಗ ಎಲ್ಲ ವರ್ಗದವರಿಗೂ ಎಲ್ಲಾ ರೀತಿಯ ಸೌಲಭ್ಯಗಳು ಸಂವಿಧಾನಾತ್ಮಕವಾಗಿ ದೊರಕುತ್ತಿವೆ. ಹಿಂದುಳಿದ ಜಾತಿ-ವರ್ಗದವರಿಗೆ ವಿಶೇಷ ಸೌಲಭ್ಯ ನೀಡಲಾಗುತ್ತಿದೆ. ಕ್ರಮೇಣವಾಗಿ ಹೆಚ್ಚುತ್ತಿರುವ ಸಾಕ್ಷರತೆಯಿಂದಾಗಿ ಸಾಮಾಜಿಕ ಜಾಗೃತಿ ಮೂಡತೊಡಗಿದ್ದು ಅಸ್ಪೃಶ್ಯತಾ ಆಚರಣೆ ಕಡಿಮೆಯಾಗುತ್ತಿದೆ.

©KTBS NOT TO BE REPUBLISHED

ಇದು ಸಮಾಜದ ಸ್ವಾಗತಾರ್ಹವಾದ ಬೆಳವಣಿಗೆಯಾಗಿದ್ದು ಸಾಮಾಜಿಕ ಸಾಮರಸ್ಯದ ಬೆಳವಣಿಗೆಗೆ ಸಹಾಯಕವಾಗಿದೆ.

### ಅಸ್ಪೃಶ್ಯತಾ ನಿವಾರಣೆಗೆ ಕ್ರಮಗಳು :

ಅಸ್ಪೃಶ್ಯತೆಯ ಕಳಂಕವನ್ನು ತೊಡೆದು ಹಾಕಲು ಜ್ಯೋತಿಭಾ ಫುಲೆ, ಸ್ವಾಮಿ ವಿವೇಕಾನಂದ, ಡಾ.ಬಿ.ಆರ್. ಅಂಬೇಡ್ಕರ್ ಮೊದಲಾದವರು ತೀವ್ರ ಪ್ರಯತ್ನಪಟ್ಟರು. ಇಷ್ಟಾದರೂ ಇದನ್ನು ಪೂರ್ಣ ಪ್ರಮಾಣದಲ್ಲಿ ಹೋಗಲಾಡಿಸಲು ಇನ್ನೂ ಸಾಧ್ಯವಾಗಿಲ್ಲ. ಇದನ್ನು ತಡೆಯಲು ಕಾನೂನುಗಳನ್ನು ಜಾರಿ ಮಾಡಲಾಗಿದೆ.

ಸಂವಿಧಾನದ 17ನೆಯ ವಿಧಿಯು ಅಸ್ಪೃಶ್ಯತಾ ಆಚರಣೆಯನ್ನು ನಿಷೇಧಿಸಿದೆ. ಭಾರತ ಸರ್ಕಾರ 'ಅಸ್ಪೃಶ್ಯತಾ ಅಪರಾಧಗಳ ಕಾಯ್ದೆ'ಯನ್ನು 1955ರಲ್ಲಿ ಜಾರಿಗೊಳಿಸಿದೆ. ಇದರಲ್ಲಿ ಕಂಡುಬಂದ ಕೆಲವು ಲೋಪ ದೋಷಗಳನ್ನು ತಿದ್ದುಪಡಿಮಾಡಿ 'ನಾಗರಿಕ ಹಕ್ಕುಗಳ ಸಂರಕ್ಷಣಾ ಕಾಯ್ದೆ' ಎಂದು 1976ರಲ್ಲಿ ಮಾರ್ಪಾಡುಗೊಳಿಸಲಾಯಿತು. ಈ ಕಾಯ್ದೆಯ ಪ್ರಕಾರ ಅಸ್ಪೃಶ್ಯತೆಯ ಆಚರಣೆಯು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಅಲ್ಲದೆ ಸಂವಿಧಾನಾತ್ಮಕವಾಗಿ ಸಾರ್ವತ್ರಿಕ ಮತದಾನದ ಹಾಗೂ ಸಮಾನತೆಯ ಹಕ್ಕನ್ನು ದೇಶದ ಎಲ್ಲಾ ನಾಗರಿಕರಿಗೂ ನೀಡಲಾಗಿದೆ. ವಿಶೇಷವಾಗಿ ಪರಿಶಿಷ್ಟರನ್ನೊಳಗೊಂಡಂತೆ ಹಿಂದುಳಿದ ಜಾತಿಯವರಿಗೆ ಶೈಕ್ಷಣಿಕ, ರಾಜಕೀಯ, ಆರ್ಥಿಕ ಮತ್ತು ಉದ್ಯೋಗಾವಕಾಶಗಳಲ್ಲಿ ಮೀಸಲಾತಿಗಳನ್ನು ಕಲ್ಪಿಸಲಾಗಿದೆ. 1989ರ ಶಾಸನವು ಅಸ್ಪೃಶ್ಯತೆಯ ನಿರ್ಮೂಲನೆ ಕುರಿತಾದ ವಿಶೇಷ ಜವಾಬ್ದಾರಿಗಳನ್ನು ರಾಜ್ಯ ಸರ್ಕಾರಗಳಿಗೆ ವಹಿಸಿದೆ. ಹೀಗೆ, ಸ್ವತಂತ್ರ ಭಾರತವು ಅಸ್ಪೃಶ್ಯತೆಯ ನಿವಾರಣೆಗಾಗಿ ವಿಶೇಷ ಆಸಕ್ತಿ ವಹಿಸಿ ಎಲ್ಲಾ ನಾಗರಿಕರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಲು ಶ್ರಮಿಸುತ್ತಾ ಬಂದಿದೆ.

> **ನಿಮಗಿದು ತಿಳಿದಿರಲಿ :**
>
> * ಸಂವಿಧಾನದ 15, 16, 17, 38 ಮತ್ತು 46ನೇ ವಿಧಿಗಳು ಭಾರತೀಯ ಪ್ರಜೆಗಳ ನಡುವೆ ಯಾವುದೇ ಬಗೆಯ ತಾರತಮ್ಯ ಮಾಡಬಾರದು ಎಂದು ತಿಳಿಸುತ್ತವೆ.
> * 16(4) 320(4) ನೇ ವಿಧಿಗಳು ಉದ್ಯೋಗ ವಲಯದಲ್ಲಿ ಪರಿಶಿಷ್ಟ ಜಾತಿ-ಪಂಗಡಗಳಿಗೆ ಮೀಸಲಾತಿ ಘೋಷಿಸಿವೆ.
> * 330, 332, 334 ನೇ ವಿಧಿಗಳು ರಾಜಕೀಯ ಕ್ಷೇತ್ರದಲ್ಲಿ ಪರಿಶಿಷ್ಟರಿಗೆ ಮೀಸಲಾತಿ ಘೋಷಿಸಿವೆ.
> * 29 ನೇ ವಿಧಿ ಶೈಕ್ಷಣಿಕ ಸೌಲಭ್ಯ ಘೋಷಿಸಿದೆ.
> * 25 ನೇ ವಿಧಿ ಜನರೆಲ್ಲರಿಗೂ ಸಾರ್ವಜನಿಕ ಧಾರ್ಮಿಕ ಕೇಂದ್ರಗಳಿಗೆ ಪ್ರವೇಶಿಸುವ ಮುಕ್ತ ಅವಕಾಶ ಘೋಷಿಸಿದೆ.

© KTBS NOT TO BE REPUBLISHED

### ಅಭ್ಯಾಸಗಳು

**I. ಈ ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟಿರುವ ಜಾಗಗಳನ್ನು ಭರ್ತಿ ಮಾಡಿರಿ.**

1. ಮಾನವಕುಲ ತಾನೊಂದೇ ವಲಂ ಎಂದು ಹೇಳಿದವರು ____________
2. ಅಸ್ಪೃಶ್ಯತೆ ಹಿಂದೂ ಸಮಾಜಕ್ಕೆ ಹತ್ತಿದ ಕಳಂಕ ಎಂದವರು ________

3. ಅಸ್ಪೃಶ್ಯತಾ ಆಚರಣೆ ಶಿಕ್ಷಾರ್ಹ ಅಪರಾಧ ಎಂದು ಸಂವಿಧಾನದ ____________ ವಿಧಿಯು ಘೋಷಿಸಿದೆ.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿರಿ :**

1. ಸಾಮಾಜಿಕ ಸ್ತರ ವಿನ್ಯಾಸ ಎಂದರೇನು?
2. ಸಾಮಾಜಿಕ ಸ್ತರ ವಿನ್ಯಾಸವು ಹೇಗೆ ಉಂಟಾಗಿದೆ?
3. ಪೂರ್ವಾಗ್ರಹ ಎಂದರೇನು?
4. ಅಸ್ಪೃಶ್ಯತಾ ನಿವಾರಣೆಯ ಸಂವಿಧಾನಾತ್ಮಕ ಮತ್ತು ಶಾಸನಾತ್ಮಕ ಕ್ರಮಗಳಾವುವು? ವಿವರಿಸಿ.
5. ಅಸ್ಪೃಶ್ಯತಾ ಆಚರಣೆಯಂತಹ ಸಾಮಾಜಿಕ ಪಿಡುಗನ್ನು ನಿವಾರಿಸಲು ನಿಮ್ಮ ಸಲಹೆಗಳೇನು?

**III. ಚಟುವಟಿಕೆ :**

1. ಅಸ್ಪೃಶ್ಯತಾ ನಿವಾರಣೆಗಾಗಿ ಪ್ರಯತ್ನಿಸಿದ ಸಮಾಜ ಸುಧಾರಕರ ಜೀವನ ಚರಿತ್ರೆ ಓದಿಸಿ.

**IV. ಯೋಜನೆ :**

1. ಅಸ್ಪೃಶ್ಯತೆಯ ನಿವಾರಣೆಗಾಗಿ ನಿಮ್ಮ ಯೋಜನೆಗಳನ್ನು ಬರೆದು ಶಿಕ್ಷಕರೊಂದಿಗೆ ಚರ್ಚಿಸಿ.

@KTBS
NOT TO BE REPUBLISHED

## ಅಧ್ಯಾಯ – 9

# ದುಡಿಮೆ ಮತ್ತು ಆರ್ಥಿಕ ಜೀವನ

Q4R9D6

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**


- ಶ್ರಮ ವಿಭಜನೆ ಮತ್ತು ವರ್ಗಗಳು.
- ದುಡಿಮೆಯಲ್ಲಿನ ತಾರತಮ್ಯತೆಗಳು.
- ನಿರುದ್ಯೋಗ– ಪ್ರಕಾರಗಳು, ಕಾರಣಗಳು, ಪರಿಣಾಮಗಳು ಮತ್ತು ಪರಿಹಾರೋಪಾಯಗಳು.
- ಸಂಘಟಿತ ಮತ್ತು ಅಸಂಘಟಿತ ಕೆಲಸಗಾರರು.

ದುಡಿಮೆ ಎಂಬುದು ಉದ್ದೇಶವೊಂದರ ಸಾಧನೆಗಾಗಿ ನಡೆಸಲಾಗುವ ಕಾರ್ಯ. ವ್ಯಕ್ತಿಯೋರ್ವನ ಶಕ್ತಿಯ ವ್ಯಯದಿಂದ ಅಥವಾ ಪರಿಶ್ರಮದಿಂದ ಆತನಿಗೆ ಆರ್ಥಿಕ ಅಥವಾ ವಸ್ತು ರೂಪದ ಪ್ರತಿಫಲ ಸಿಗುವುದಿದ್ದರೆ ಅದನ್ನು 'ದುಡಿಮೆ' ಎನ್ನಬಹುದು.

ದುಡಿಮೆಯು ನಮ್ಮ ಜೀವನದ ಮುಖ್ಯ ಅಂಗವಾಗಿದೆ. ಜೀವನ ನಿಭಾಯಿಸಲು ದುಡಿಮೆ ಅಗತ್ಯ. ಇದರಿಂದ ಜೀವನದ ಅವಶ್ಯಕತೆಗಳನ್ನು ಪೂರೈಸಿಕೊಳ್ಳಬಹುದು. ಆರ್ಥಿಕ ಜೀವನಕ್ಕೆ ಸಂಬಂಧಿಸಿದಂತೆ ದುಡಿಮೆಯ ರೂಪ, ಸ್ವರೂಪಗಳು ಸಮಾಜದಿಂದ ಸಮಾಜಕ್ಕೆ ಬೇರೆ ಬೇರೆಯಾಗಿರುತ್ತವೆ. ಇವು ಕಾಲದಿಂದ ಕಾಲಕ್ಕೆ ಬದಲಾಗುತ್ತಿರುತ್ತವೆ.

## ಶ್ರಮವಿಭಜನೆ ಮತ್ತು ವರ್ಗಗಳು

ಒಂದು ಕೆಲಸವನ್ನು ಜನರು ತಮ್ಮ ಆಸಕ್ತಿ, ಅಭಿರುಚಿ, ಸಾಮರ್ಥ್ಯ, ವಯಸ್ಸು, ವಿಶೇಷ ಪರಿಣತಿ, ಕೌಶಲ್ಯ ಹಾಗೂ ಲಿಂಗ ಭೇದಗಳ ಆಧಾರದ ಮೇಲೆ ಹಂಚಿಕೊಂಡು ಮಾಡುವುದನ್ನು 'ಶ್ರಮ ವಿಭಜನೆ' ಎನ್ನಲಾಗಿದೆ.




ಉದಾಹರಣೆಗೆ – ನಾವು ತೊಡುವ ಬಟ್ಟೆಗಳನ್ನು ಸಿದ್ಧಪಡಿಸಲು ಕೃಷಿಕರು, ನೇಕಾರರು, ಬಣ್ಣಹಾಕುವವರು, ವರ್ತಕರು, ದರ್ಜಿಗಳು ಎಲ್ಲರೂ ಬೇರೆ ಬೇರೆ ನೆಲೆಗಳಲ್ಲಿ ದುಡಿಯುವರು.

ಶ್ರಮ ವಿಭಜನೆಯು 'ವಿಶೇಷ ಪರಿಣತಿಗೆ' ಕಾರಣವಾಗುವುದು. 'ವಿಶೇಷ ಪರಿಣತಿ' ಎಂದರೆ, ಯಾವುದಾದರೂ ನಿರ್ದಿಷ್ಟ ಕ್ಷೇತ್ರವೊಂದರಲ್ಲಿ ಸಾಕಷ್ಟು ಆಳವಾದ ಪರಿಣತಿ, ತರಬೇತಿ ಅಥವಾ ಕೌಶಲ್ಯ ಪಡೆಯುವುದು ಎಂದರ್ಥ. ಶ್ರಮವಿಭಜನೆಯು ಇಂದು ಜನರು ವಿವಿಧ ಕ್ಷೇತ್ರಗಳಲ್ಲಿ ಪರಿಶ್ರಮಿಸಿ ಆರ್ಥಿಕ ಲಾಭ ಪಡೆಯಲು ಸಹಾಯಕವಾಗಿದೆ. ಆರ್ಥಿಕ ಹಿತಾಸಕ್ತಿ ಮತ್ತು ಶ್ರಮವಿಭಜನೆಯಿಂದ ವರ್ಗವ್ಯವಸ್ಥೆಯು ಸೃಷ್ಟಿಗೊಂಡಿತು. ಆಧುನಿಕ ಕಾಲದಲ್ಲಿ ವರ್ಗವ್ಯವಸ್ಥೆಯು ಕೈಗಾರಿಕೀಕರಣದಿಂದ ಉಂಟಾಗಿದೆ.

@KTBS NOT TO BE REPUBLISHED

ಇಂದಿನ ಔದ್ಯೋಗಿಕ ಸಮಾಜದಲ್ಲಿ ವಿಶೇಷ ಪರಿಣತಿಗೆ ಆದ್ಯತೆಯಿದೆ. ಇದು ವಿಶಾಲ ಸ್ವರೂಪವನ್ನು ತಳೆದಿದ್ದುದರಿಂದ ಕೈಗಾರಿಕೋದ್ಯಮಗಳು ಹೆಚ್ಚು ಹೆಚ್ಚು ಬೆಳೆದು ಬಂದವು. ವ್ಯಾಪಾರ ವಾಣಿಜ್ಯೋದ್ಯಮಗಳು ವಿಸ್ತಾರಗೊಂಡವು.

### ಕೂಲಿ ಸಹಿತ ಮತ್ತು ಕೂಲಿ ರಹಿತ ದುಡಿಮೆ

ಕೂಲಿ, ಸಂಬಳ ಅಥವಾ ಇನ್ನಾವುದೇ ಭೌತಿಕ ರೂಪದ ಪ್ರತಿಫಲ ನೀಡುವ ದುಡಿಮೆಯ ಚಟುವಟಿಕೆ ಕೂಲಿಸಹಿತ ದುಡಿಮೆ ಎನ್ನಿಸಿಕೊಳ್ಳುವುದು. ಆರ್ಥಿಕ ಪ್ರತಿಫಲಕ್ಕಾಗಿ ಹೊಲದಲ್ಲಿ ಉಳುವುದು, ಕಾರ್ಖಾನೆಯಲ್ಲಿ ದುಡಿಯುವುದು, ಶಾಲೆಯಲ್ಲಿ ಉಪನ್ಯಾಸ ಮಾಡುವುದು, ಕಟ್ಟಡ ಕಟ್ಟುವುದು, ವಾಹನಗಳ ರಿಪೇರಿ ಮಾಡುವುದು ಮುಂತಾದ ವಿವಿಧ ಬಗೆಯ ದುಡಿಮೆಯ ಚಟುವಟಿಕೆಗಳಲ್ಲಿ ತೊಡಗುವುದು ಇವೆಲ್ಲವೂ ಇಂದಿನ ಸಂಕೀರ್ಣ ಸಮಾಜದಲ್ಲಿ ಬದುಕಿಗೆ ಅನಿವಾರ್ಯವಾಗಿವೆ.

ಮಾನವನ ಎಲ್ಲ ಕ್ರಿಯೆಗಳು ಕೂಲಿಸಹಿತ ದುಡಿಮೆ ಎನಿಸಿಕೊಳ್ಳುವುದಿಲ್ಲ. ದುಡಿಮೆಯು ಕೆಲವೊಮ್ಮೆ ಆರ್ಥಿಕ ಲಾಭ ಅಥವಾ ಪ್ರತಿಫಲವಿಲ್ಲದ ಕ್ರಿಯೆಯಾಗಿರುತ್ತದೆ. ಮನಃಸಂತೋಷದ ದೃಷ್ಟಿಯಿಂದ ಮಾನವನು ತೊಡಗುವ ಕ್ರಿಯೆಗಳೇ ಕೂಲಿ ರಹಿತ ದುಡಿಮೆ ಎನಿಸಿದೆ. ಉದಾಹರಣೆಗೆ – ಕಲಾಕಾರನೊಬ್ಬನು ಆತ್ಮ ಸಂತೋಷಕ್ಕಾಗಿ ಚಿತ್ರವೊಂದನ್ನು ಬಿಡಿಸುವ ಕಾರ್ಯದಲ್ಲಿ ತೊಡಗಿರುವುದು ಇತ್ಯಾದಿ. ಆದರೆ ಜಾತಿ ಮತ್ತು ವರ್ಣಭೇದದ ಸಮಾಜದಲ್ಲಿ ಕೆಳಜಾತಿ ಮತ್ತು ಕಪ್ಪು ಜನರಿಂದ ಒತ್ತಾಯ ಪೂರ್ವಕವಾಗಿ ಕೂಲಿ ರಹಿತ ದುಡಿಮೆ ಮಾಡಿಸಿಕೊಳ್ಳಲಾಗುತ್ತಿತ್ತು.

### ದುಡಿಮೆಯಲ್ಲಿ ಭೇದ–ಭಾವ

ದುಡಿಮೆ ಮತ್ತು ಕೂಲಿ ಹಂಚಿಕೆಯಲ್ಲಿ ಕಾಣಬರುವ ಈ ಅಸಮಾನತೆಯನ್ನು ದುಡಿಮೆಯ ತಾರತಮ್ಯ ಅಥವಾ ದುಡಿಮೆಯಲ್ಲಿ ಭೇದ–ಭಾವ ಎನ್ನಬಹುದು. ಸ್ತ್ರೀ–ಪುರುಷರೀರ್ವರೂ ದುಡಿಮೆಯಲ್ಲಿ ತೊಡಗಿರಬಹುದಾದರೂ ಅವರ ಉದ್ಯೋಗಗಳು ಒಂದೇ ಸಮನಾಗಿಲ್ಲ. ಭಾರತವನ್ನೊಳಗೊಂಡಂತೆ ಜಗತ್ತಿನ ದೇಶಗಳಲ್ಲಿ ಪುರುಷರಿಗೆ ಉತ್ತಮ ಸ್ವರೂಪದ ಉದ್ಯೋಗಗಳನ್ನು ನೀಡಲಾಗುತ್ತಿದೆ. ಹಾಗೆಯೇ ಹೆಚ್ಚಿನ ಹೊಣೆಗಾರಿಕೆ ಮತ್ತು ಸಂಬಳವನ್ನು ನೀಡಲಾಗುತ್ತಿದೆ. ಆದರೆ ಸ್ತ್ರೀಯರಿಗೆ ಕಡಿಮೆ ಮಟ್ಟದ ಉದ್ಯೋಗ, ಹೊಣೆಗಾರಿಕೆ ಮತ್ತು ಸಂಬಳವನ್ನು ನೀಡಲಾಗುತ್ತಿದೆ. ಸರ್ಕಾರಿ ವಲಯದಲ್ಲಿ ಭೇದಭಾವವು ಅತಿ ವಿರಳ. ಅಸಂಘಟಿತ ಕ್ಷೇತ್ರಗಳಲ್ಲಿ ಇವು ಕಾಣಬರುತ್ತವೆ.

ಸ್ತ್ರೀ–ಪುರುಷರ ದುಡಿಮೆಗೆ ಸಂಬಂಧಿಸಿದಂತೆ ಇನ್ನೊಂದು ಬಗೆಯ ತಾರತಮ್ಯವಿದೆ. ಉದ್ಯೋಗಾವಕಾಶಗಳು ಹೆಚ್ಚುತ್ತಿರುವ ಈ ದಿನಗಳಲ್ಲಿ ಸ್ತ್ರೀಯರು ಬಹು ದೊಡ್ಡ ಸಂಖ್ಯೆಯಲ್ಲಿ ಉದ್ಯೋಗಗಳಿಗೆ ಸೇರಿಕೊಳ್ಳುತ್ತಿದ್ದಾರೆ. ಆದರೆ ಅವರಿಗೆ ನೀಡಲಾಗುವ ಸಂಬಳದಲ್ಲಿ ಮಾತ್ರ ತಾರತಮ್ಯ ಮಾಡಲಾಗುತ್ತಿದೆ. ಪುರುಷರಿಗೆ ಸರಿಸಮಾನವಾಗಿ ಅವರು ದುಡಿಯುವ ಸಂದರ್ಭದಲ್ಲೂ ಅವರಿಗೆ ಕಡಿಮೆ ವೇತನ ನೀಡುವುದು ಒಂದು ಬಗೆಯ ಶೋಷಣೆಯೇ ಸರಿ. ಇದನ್ನು ತೊಡೆದು ಹಾಕಲು ಕೇಂದ್ರ ಸರ್ಕಾರವು 'ಸಮಾನ ವೇತನ ಕಾಯ್ದೆ'ಯನ್ನು (1976) ಜಾರಿಗೆ ತಂದಿದೆ. ಆದ್ದರಿಂದ ನಗರದ ಸಂಘಟಿತ ವಲಯದಲ್ಲಿ ವೇತನ ಸಂಬಂಧಿಸಿದ ಇಂತಹ ತಾರತಮ್ಯಗಳು ಕಡಿಮೆಯಾಗಿವೆ.

ಕೃಷಿಕ ಸಮಾಜವೂ ಕೂಡ ಲಿಂಗ, ವಯಸ್ಸು, ಸಾಮರ್ಥ್ಯಗಳ ಆಧಾರದ ಮೇಲೆ ಕೆಲಸಕಾರ್ಯಗಳನ್ನು ಅಸಮಾನ ರೀತಿಯಲ್ಲಿ ಹಂಚಿಕೆ ಮಾಡುತ್ತದೆ ಹಾಗೂ ಕೂಲಿ ನೀಡುವುದರಲ್ಲಿ ಇಲ್ಲಿಯೂ ಭೇದಭಾವವಿದೆ. ಅಕ್ಷರತೆಯ ಪ್ರಮಾಣ ಹೆಚ್ಚಾದಂತೆಲ್ಲಾ ಇಂತಹ ಭೇದಭಾವವು ಕಡಿಮೆಯಾಗುತ್ತಾ ಬರುತ್ತಿದೆ.

© KTBS NOT TO BE REPUBLISHED

## ನಿರುದ್ಯೋಗ

ಭಾರತದ ಆರ್ಥಿಕ, ಸಾಮಾಜಿಕ ವ್ಯವಸ್ಥೆಯನ್ನು ಕಾಡುತ್ತಿರುವ ಸಮಸ್ಯೆಗಳಲ್ಲಿ ನಿರುದ್ಯೋಗ ಸಮಸ್ಯೆಯೂ ಒಂದು. ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳಲ್ಲಿ ಈ ಸಮಸ್ಯೆಯು ಗಂಭೀರವಾಗಿದೆ. ನಿರುದ್ಯೋಗ ಎಂದರೆ, ದುಡಿಯುವ ವಯಸ್ಸು, ಸಾಮರ್ಥ್ಯ, ಆಸಕ್ತಿ, ಅರ್ಹತೆ ಇದ್ದರೂ ಉದ್ಯೋಗ ಸಿಗದ ಪರಿಸ್ಥಿತಿ ಎಂದರ್ಥ. ಕೆಲಸ ಮಾಡಲು ಇಷ್ಟವಿದ್ದು, ದುಡಿಯುವ ವಯಸ್ಸಿನಲ್ಲಿರುವ ಪುರುಷ ಹಾಗೂ ಸ್ತ್ರೀಯರು ಉದ್ಯೋಗ ಪಡೆಯುವಲ್ಲಿ ವಂಚಿತರಾದರೆ ಅವರನ್ನು ನಿರುದ್ಯೋಗಿಗಳು ಎನ್ನುತ್ತಾರೆ.

ನಿರುದ್ಯೋಗಕ್ಕೆ ಹಲವಾರು ಕಾರಣಗಳು ಇವೆ. ಅವುಗಳಲ್ಲಿ ಅತಿಯಾದ ಜನಸಂಖ್ಯೆ, ಯಾಂತ್ರೀಕರಣ, ಅತಿಯಾದ ಶ್ರಮವಿಭಜನೆ, ಸಾಮಾಜಿಕ ಅಸಮಾನತೆ, ಬಂಡವಾಳದ ಕೊರತೆ, ಅನಕ್ಷರತೆ ಮೊದಲಾದವುಗಳನ್ನು ಗುರುತಿಸಬಹುದಾಗಿದೆ.

ನಿರುದ್ಯೋಗವು ಸಮಾಜದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ನಿರುದ್ಯೋಗ ಸಮಸ್ಯೆಯು ಬಡತನ, ಅನಾರೋಗ್ಯ, ಭ್ರಷ್ಟಾಚಾರ, ಕೌಟುಂಬಿಕ ವಿಘಟನೆ, ಮೋಸ, ವಂಚನೆ, ಕಳ್ಳತನ, ವ್ಯಭಿಚಾರ ಮುಂತಾದ ಪರಿಣಾಮಗಳಿಗೆ ಕಾರಣವಾಗುವುದು. ಇದು ಅತ್ಯಂತ ಗಂಭೀರ ಸಾಮಾಜಿಕ ಸಮಸ್ಯೆಯಾಗಿದೆ.

NOT TO BE REPUBLISHED © KTBS

### ನಿರುದ್ಯೋಗ ಸಮಸ್ಯೆಗೆ ಪರಿಹಾರೋಪಾಯಗಳು

ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಹಲವಾರು ಕ್ರಮಗಳನ್ನು ಹಮ್ಮಿಕೊಂಡಿದೆ. ಅವುಗಳೆಂದರೆ, ಜನಸಂಖ್ಯಾ ನಿಯಂತ್ರಣ ಕ್ರಮಗಳು, ಗುಡಿಕೈಗಾರಿಕೆಗಳಿಗೆ ಪ್ರೋತ್ಸಾಹ, ಕೃಷಿ ಕ್ಷೇತ್ರದ ಅಭಿವೃದ್ಧಿ, ಕೈಗಾರಿಕಾ ಕ್ಷೇತ್ರದ ಅಭಿವೃದ್ಧಿ, ಶೈಕ್ಷಣಿಕ ಸುಧಾರಣಾ ಯೋಜನೆಗಳು, ಪಂಚವಾರ್ಷಿಕ ಯೋಜನೆಗಳು, ವೃತ್ತಿಪರ ಶಿಕ್ಷಣಕ್ಕೆ ಪ್ರೋತ್ಸಾಹ, ಗ್ರಾಮೀಣಾಭಿವೃದ್ಧಿ ಯೋಜನೆಗಳು, ಉದ್ಯೋಗ ಖಾತರಿ ಯೋಜನೆ, ಇತ್ಯಾದಿ. ಇತ್ತೀಚಿನ ವರ್ಷಗಳಲ್ಲಿ ಭಾರತದ 'ಮಾಹಿತಿ ಮತ್ತು ತಂತ್ರಜ್ಞಾನ' ಕ್ಷೇತ್ರದಲ್ಲಿ ಹೆಚ್ಚಿನ ಪ್ರಗತಿ ಕಂಡು ಬಂದಿದ್ದು, ಉದ್ಯೋಗ ನೀಡಿಕೆಯಲ್ಲಿ ಇಂತಹ ಸೇವಾ ವಲಯದ ಪಾತ್ರ ಅತ್ಯಂತ ಮಹತ್ವದ್ದಾಗಿದೆ.

> **ಚರ್ಚಿಸಿ:**
> ನಿರುದ್ಯೋಗ ಸಮಸ್ಯೆ ಅಲ್ಲ, ಉದ್ಯೋಗ ಮಾಡಲು ಅವಕಾಶವಿದ್ದರೂ ಉದ್ಯೋಗ ಮಾಡದೆ ನಿರುದ್ಯೋಗ ಸೃಷ್ಟಿಸುತ್ತೇವೆ.

> ***ಗಮನಿಸಿ :*** *ಇಂದು ಗ್ರಾಮೀಣ ಪ್ರದೇಶಗಳಲ್ಲಿ ನಿರುದ್ಯೋಗ ಸಮಸ್ಯೆಗಿಂತ ಉದ್ಯೋಗಿಗಳ ಕೊರತೆ ಕಂಡು ಬರುತ್ತಿದೆ. ಕಾರಣ ಗ್ರಾಮೀಣ ಯುವಕ-ಯುವತಿಯರು ಉದ್ಯೋಗಗಳನ್ನರಸಿ ನಗರಗಳತ್ತ ಧಾವಿಸುತ್ತಿರುವುದರಿಂದ ಗ್ರಾಮೀಣ ಕೃಷಿ ಕ್ಷೇತ್ರದಲ್ಲಿ ದುಡಿಯಲು ಕೆಲಸಗಾರರಿಲ್ಲದೆ ಕೃಷಿ ಚಟುವಟಿಕೆಗಳು ಕಡಿಮೆಯಾಗುತ್ತಿರುವುದನ್ನು ಕಾಣಬಹುದು. ಅದೇ ರೀತಿ ನಗರ ಪ್ರದೇಶಗಳಲ್ಲಿಯೂ ನಿರ್ದಿಷ್ಟ ವಿಶೇಷ ಪರಿಣತಿಯ ಕಾರ್ಮಿಕರ ಕೊರತೆಯನ್ನು ಕಾಣಬಹುದು.*

### ಸಂಘಟಿತ ಮತ್ತು ಅಸಂಘಟಿತ ಕೆಲಸಗಾರರು

**ಸಂಘಟಿತ ಕೆಲಸಗಾರರು** : ಕಾನೂನು, ಕಾಯ್ದೆಗಳಿಗೆ ಬದ್ಧವಾದಂತಹ ನಿಗದಿತ ಕಾರ್ಯಕ್ಷೇತ್ರದಲ್ಲಿ ಕೆಲಸ ಮಾಡುವವರನ್ನು ಸಂಘಟಿತ ಕೆಲಸಗಾರರು ಎಂದು ಕರೆಯುತ್ತಾರೆ. ಸಂಘಟಿತ ವಲಯದಲ್ಲಿ ಪ್ರತಿಯೊಬ್ಬ ಕೆಲಸಗಾರನ ಕಾರ್ಯದ ಬಗ್ಗೆ ನಿಶ್ಚಿತ ನಿಯಮಗಳಿರುತ್ತವೆ.

ಸಂಘಟಿತ ಕಾರ್ಯಕ್ಷೇತ್ರದಲ್ಲಿ ಅಧಿಕಾರ ಏಣಿ ಶ್ರೇಣಿ ವ್ಯವಸ್ಥೆಯಿರುತ್ತದೆ. ಸಂಘಟಿತ ಕೆಲಸಗಾರರಿಗೆ ವಿಶೇಷ ಪರಿಣತಿ, ತರಬೇತಿ, ಪ್ರತಿಭೆ, ಅನುಭವ ಮತ್ತು ಶೈಕ್ಷಣಿಕ ಅರ್ಹತೆಗಳಿಗೆ ಅವಕಾಶಗಳಿರುತ್ತವೆ. ಇವರ ಕೆಲಸದ ಎಲ್ಲ ವ್ಯವಹಾರಗಳು ಬರಹ ರೂಪದಲ್ಲಿರುತ್ತವೆ. ಇವರಿಗೆ ನಿಗದಿತ ವೇತನ, ಭತ್ಯೆ, ವಿರಾಮ ವೇತನ, ನಿವೃತ್ತಿವೇತನ ಸೌಲಭ್ಯಗಳನ್ನು ನೀಡಲಾಗುತ್ತದೆ. ಅಲ್ಲದೆ ವೈದ್ಯಕೀಯ ಸೌಲಭ್ಯವನ್ನು ಕೂಡ ಒದಗಿಸಲಾಗುತ್ತದೆ. ಇವರು ದಿನವೊಂದರಲ್ಲಿ ನಿಗದಿತ ಸಮಯದಲ್ಲಿ ಮಾತ್ರ ಕಾರ್ಯ ನಿರ್ವಹಿಸುವವರಾಗಿರುತ್ತಾರೆ.

ಖಾಸಗಿ ಕಂಪನಿಗಳು, ಕಾರ್ಖಾನೆ, ಕೈಗಾರಿಕೆಗಳು, ಸರ್ಕಾರಿ ಇಲಾಖೆಗಳು, ಶಾಲಾ–ಕಾಲೇಜುಗಳು, ವಾಣಿಜ್ಯ ಬ್ಯಾಂಕುಗಳು, ವಿಮಾ ಕಂಪನಿಗಳು, ಸೈನ್ಯ, ಇಂತಹ ಕೆಲವು ಕ್ಷೇತ್ರಗಳಲ್ಲಿನ ಕೆಲಸಗಾರರನ್ನು ಸಂಘಟಿತ ಕೆಲಸಗಾರರೆಂದು ಗುರುತಿಸಬಹುದು.










**ಅಸಂಘಟಿತ ಕೆಲಸಗಾರರು :** ಯಾವುದೇ ನಿರ್ದಿಷ್ಟ ಕಾಯ್ದೆ–ಕಾನೂನು ಅಥವಾ ಸಂಘಟನೆಯ ನಿಯಂತ್ರಣಕ್ಕೆ ಒಳಪಡದೆ ಜೀವನ ನಿರ್ವಹಣೆಗಾಗಿ ತಮ್ಮಪಾಡಿಗೆ ವಿವಿಧ ಕಸುಬುಗಳಲ್ಲಿ ತೊಡಗಿಸಿಕೊಂಡು ದಿನಗೂಲಿ ಅಥವಾ ಇನ್ನಿತರ ರೂಪದ ಆರ್ಥಿಕ ಪ್ರತಿಫಲ ಪಡೆಯುವ ಶ್ರಮಿಕರನ್ನು ಅಸಂಘಟಿತ ಕೆಲಸಗಾರರು ಎಂದು ಕರೆಯಬಹುದು. ಅಸಂಘಟಿತ ಕೆಲಸಗಾರರ ಕಾರ್ಯಕ್ಷೇತ್ರವು ವಿಶಾಲವಾಗಿದೆ. ಈ ಕ್ಷೇತ್ರವು ಸರ್ಕಾರದ ನಿಯಂತ್ರಣಕ್ಕೊಳಪಡುವುದಿಲ್ಲ.

ಮನೆಕೆಲಸಗಾರರು, ಗೃಹ ನಿರ್ಮಾಣದ ಕೂಲಿಕಾರರು, ಕೃಷಿ ಕಾರ್ಮಿಕರು, ಅಲ್ಲದೆ ತಾವೇ ಸ್ವತಃ ಬೀದಿಯಲ್ಲಿ ತರಕಾರಿ ಮಾರಾಟ, ವಸ್ತುಗಳ ಮಾರಾಟ, ವಾಹನಗಳ ರಿಪೇರಿ ಮಾಡುವವರು, ತಳ್ಳುವ ಗಾಡಿಗಳ ಮೇಲೆ, ತಲೆಯ ಮೇಲೆ ತರಕಾರಿ ಮತ್ತು ಇತರ ವಸ್ತುಗಳನ್ನು ಹೊತ್ತು ಮಾರಾಟ ಮಾಡುವವರ ಕ್ಷೇತ್ರಗಳಲ್ಲಿ ಅಸಂಘಟಿತ ಕೆಲಸಗಾರರನ್ನು ಗುರುತಿಸಬಹುದು.

**ಅಸಂಘಟಿತ ಕೆಲಸಗಾರರ ಸಮಸ್ಯೆಗಳು :** ಅಸಂಘಟಿತ ಕೆಲಸಗಾರರು ಮಾಡುವ ದುಡಿಮೆಗೆ ಯಾವುದೇ ನಿಗದಿತ ನಿಯಮ, ಕಾಯ್ದೆಗಳಿರುವುದಿಲ್ಲ. ಇವರ ದುಡಿಮೆಗೆ ಕಡಿಮೆ ಕೂಲಿ ನೀಡಲಾಗುತ್ತದೆಯಲ್ಲದೆ ಇವರಿಗೆ ಯಾವುದೇ ಉಚಿತ ವೈದ್ಯಕೀಯ ಸೌಲಭ್ಯಗಳಿರುವುದಿಲ್ಲ. ಇವರ ಕೆಲಸಕ್ಕೆ ಭದ್ರತೆ ಮತ್ತು ನಿಗದಿತ ವೇತನ, ವಿರಾಮ ವೇತನ, ನಿವೃತ್ತಿ ವೇತನ ಹಾಗೂ ಭತ್ಯೆಗಳ ಸೌಲಭ್ಯಗಳಿರುವುದಿಲ್ಲ. ಅಂತೆಯೇ ಇವರು ಉದ್ಯೋಗಪತಿಗಳಿಂದ ಹಲವಾರು ರೀತಿಗಳಲ್ಲಿ ಶೋಷಣೆಗೆ ಒಳಗಾಗುವ ಸಾಧ್ಯತೆಗಳಿರುತ್ತವೆ.



NOT TO BE REPUBLISHED

## ಅಭ್ಯಾಸಗಳು

**I ಈ ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟಿರುವ ಜಾಗಗಳನ್ನು ಭರ್ತಿ ಮಾಡಿರಿ.**

1. ಶ್ರಮ ವಿಭಜನೆಯು ________ ಗೆ ಕಾರಣವಾಗುವುದು.
2. ವಿಶೇಷ ತರಬೇತಿ ಹೊಂದಿರದ ಕಾರ್ಮಿಕರನ್ನು ________ ಕೆಲಸಗಾರರು ಎಂದು ಕರೆಯುತ್ತಾರೆ.
3. ವಿಶೇಷ ತರಬೇತಿ, ಪರಿಣತಿ ಹೊಂದಿದ ಕಾರ್ಮಿಕರನ್ನು ________ ಕೆಲಸಗಾರರು ಎಂದು ಕರೆಯುತ್ತಾರೆ.

**II ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

1. ಶ್ರಮ ವಿಭಜನೆ ಎಂದರೇನು?
2. ಕೂಲಿ ಸಹಿತ ದುಡಿಮೆ ಎಂದರೇನು?
3. ನಿರುದ್ಯೋಗ ಎಂದರೇನು?
4. ನಿರುದ್ಯೋಗಕ್ಕೆ ಕಾರಣಗಳಾವುವು?
5. ನಿರುದ್ಯೋಗ ಪರಿಣಾಮಗಳಾವುವು?

**III ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿರಿ :**

1. ದುಡಿಮೆಯಲ್ಲಿನ ತಾರತಮ್ಯತೆಯ ಸ್ವರೂಪವನ್ನು ವಿವರಿಸಿ.
2. ನಿರುದ್ಯೋಗ ಸಮಸ್ಯೆಗೆ ಪರಿಹಾರ ಕ್ರಮಗಳಾವುವು? ವಿವರಿಸಿ.
3. ಸಂಘಟಿತ ಮತ್ತು ಅಸಂಘಟಿತ ಕೆಲಸಗಾರರ ನಡುವಿನ ವ್ಯತ್ಯಾಸಗಳೇನು?

**IV ಚಟುವಟಿಕೆ :**

1. ನೀವು ವಾಸವಿರುವ ಪರಿಸರದಲ್ಲಿನ ಸಂಘಟಿತ ಮತ್ತು ಅಸಂಘಟಿತ ಕೆಲಸಗಾರರ ಹೆಸರುಗಳನ್ನು ಪಟ್ಟಿಮಾಡಿ.

**V ಯೋಜನೆ :**

1. ನಿಮ್ಮ ಪ್ರದೇಶದಲ್ಲಿರುವ ಅಸಂಘಟಿತ ಕಾರ್ಮಿಕರನ್ನು ಸಂದರ್ಶನ ಮಾಡಿ, ಅವರ ಸಮಸ್ಯೆಗಳ ಬಗ್ಗೆ ವರದಿ ಸಿದ್ಧಪಡಿಸಿ.

© KTBS NOT TO BE REPUBLISHED

# ಭೂಗೋಳಶಾಸ್ತ್ರ

## ಅಧ್ಯಾಯ–10

## ಭಾರತ: ಭೌಗೋಳಿಕ ಸ್ಥಾನ ಹಾಗೂ ಪ್ರಾಕೃತಿಕ ಲಕ್ಷಣಗಳು

W2A1K6


**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ನಮ್ಮ ದೇಶದ ಹಿರಿಮೆ ಹಾಗೂ ಪರಂಪರೆಗಳು.
- 'ಭಾರತ' ಎಂಬ ಹೆಸರಿನ ಹಿನ್ನೆಲೆ ಹಾಗೂ ವೈವಿಧ್ಯತೆ.
- ಭಾರತದ ಭೌಗೋಳಿಕ ಸ್ಥಾನ, ವಿಸ್ತೀರ್ಣ, ಭೂ ಮತ್ತು ಜಲ ಮೇರೆಗಳು ಹಾಗೂ ನೆರೆಯ ರಾಷ್ಟ್ರಗಳು.
- ಭಾರತದ ಪ್ರಾಕೃತಿಕ ಲಕ್ಷಣಗಳು.
- ಭಾರತದ ಪ್ರಾಕೃತಿಕ ವಿಭಾಗಗಳು.
- ಎತ್ತರವಾದ ಪರ್ವತಗಳು, ಬೆಟ್ಟಗಳು, ಮೈದಾನಗಳು, ಕರಾವಳಿಗಳು.


NOT TO BE REPUBLISHED @KTBS

ಪ್ರಾಚೀನ ಕಾಲದಿಂದಲೂ ನಮ್ಮ ದೇಶದಲ್ಲಿ ವಿವಿಧತೆಯಲ್ಲಿ ಏಕತೆಯನ್ನು ಕಾಣಬಹುದು. ಈ ವೈವಿಧ್ಯವು ನಮ್ಮ ದೇಶಕ್ಕೆ ಬೇರೆ ಯಾವ ದೇಶದಲ್ಲೂ ಇರದಂತಹ ಶ್ರೀಮಂತಿಕೆಯನ್ನು ಕೊಟ್ಟಿದೆ. ಇಲ್ಲಿಯ ವಿವಿಧ ರೀತಿಯ ಮೇಲ್ಮೈ ಲಕ್ಷಣಗಳು, ವಾಯುಗುಣ, ಸ್ವಾಭಾವಿಕ ಸಸ್ಯವರ್ಗಗಳು ಹಾಗೂ ಜನರಲ್ಲಿನ ವೈವಿಧ್ಯತೆಗಳನ್ನು ಗಮನಿಸಿದಾಗ ಇದನ್ನು ಒಂದು 'ಉಪಖಂಡ' (Sub continent) ಎಂದು ಕರೆಯಬಹುದಾಗಿದೆ.

**ಪ್ರಪಂಚದಲ್ಲಿ ಭಾರತದ ಸ್ಥಾನ :** ಭಾರತವು ಏಷ್ಯಾಖಂಡದ ದಕ್ಷಿಣ ಭಾಗದಲ್ಲಿರುವ ಪರ್ಯಾಯ ದ್ವೀಪವಾಗಿದೆ. ಇದನ್ನು **'ಇಂಡಿಯಾ'** ಹಾಗೂ ಹಿಂದೂಸ್ಥಾನ ಎಂದು ಕರೆಯುತ್ತಾರೆ. ಇಂಡಿಯಾ ಎಂಬ ಹೆಸರು **'ಸಿಂಧೂ'** ನದಿಯಿಂದ ಬಳಕೆಗೆ ಬಂದಿದೆ. **'ಭಾರತ'** ವೆಂಬ ಹೆಸರು ಭರತ ಎಂಬ ಪುರಾತನ ಚಕ್ರವರ್ತಿಯ ಹೆಸರಿನಿಂದ ಬಂದಿದೆ. ಭಾರತವು ಸಂಪೂರ್ಣವಾಗಿ ಉತ್ತರಾರ್ಧ ಗೋಳದಲ್ಲಿದೆ. ಇದು ಉತ್ತರದಲ್ಲಿ ಅಗಲವಾಗಿದ್ದು ದಕ್ಷಿಣದ ಕಡೆಗೆ ಕಿರಿದಾಗಿ ತ್ರಿಕೋನಾಕೃತಿಯಲ್ಲಿ ಹಿಂದೂ ಮಹಾಸಾಗರದಲ್ಲಿ ಚಾಚಿಕೊಂಡಿದೆ.




ಪ್ರಪಂಚ – ಭಾರತದ ಸ್ಥಾನ



ಅಫಘಾನಿಸ್ತಾನ
3214 ಕಿ.ಮೀ.
ಲಡಾಖ್
ಜಮ್ಮು ಮತ್ತು ಕಾಶ್ಮೀರ
ಹಿಮಾಚಲ ಪ್ರದೇಶ
ಚೀನಾ
ಪಾಕಿಸ್ತಾನ
ಪಂಜಾಬ್
ಚಂಡೀಗಡ
ಉತ್ತರಖಂಡ
ಹರಿಯಾಣ
ದೆಹಲಿ
ನೇಪಾಳ
ಅರುಣಾಚಲ ಪ್ರದೇಶ
ಪೂರ್ವಲೋಹಿತ್ ಜಿಲ್ಲೆ
ಸಿಕ್ಕಿಂ
ಭೂತಾನ್
2933 ಕಿ.ಮೀ.
ಉತ್ತರಪ್ರದೇಶ
ಪಶ್ಚಿಮದ ಅಗಲ
ರಾಜಸ್ತಾನ
ಪೂರ್ವ
ಅಸ್ಸಾಂ
ನಾಗಾಲ್ಯಾಂಡ್
ಸರ್ ಕ್ರೀಕ್
ಬಿಹಾರ
ಮೇಘಾಲಯ
ಮಯನ್ಮಾರ್
ಪ್ರಯಾಗ
ಭಾರತ
ತ್ರಿಪುರಾ
ಮಣಿಪುರ
ಗುಜರಾತ್
ಜಾರ್ಖಂಡ್
ಪ.ಬಂಗಾಳ
ಬಾಂಗ್ಲಾದೇಶ
ಮಧ್ಯಪ್ರದೇಶ
ಮಿಜೋರಾಂ
ಛತ್ತೀಸಗಡ
ಡಿಯು
ಸಿಲ್ವಾಸ್ಸ
ಒರಿಸ್ಸಾ
ಮಹಾರಾಷ್ಟ್ರ
ಭಾರತದ ಭೌಗೋಳಿಕ ಕೇಂದ್ರ
ತೆಲಂಗಾಣ
ಆಂಧ್ರಪ್ರದೇಶ
ಕಾಕಿನಾಡ
ಕರ್ನಾಟಕ
ಅರಬ್ಬೀಸಮುದ್ರ
ಬಂಗಾಳಕೊಲ್ಲಿ
ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು
ಲಕ್ಷದ್ವೀಪ
ತಮಿಳುನಾಡು
ಪಾಕ್ ಜಲಸಂಧಿ
ಕೇರಳ
ಮನ್ನಾರ ಅಖಾತ
ಕನ್ಯಾಕುಮಾರಿ
ಶ್ರೀಲಂಕಾ
ಇಂದಿರಾ ಪಾಯಿಂಟ್
(ಪಿಗ್ಮೇಲಿಯನ್ ಪಾಯಿಂಟ್)
N
100 0 200 400 600 800 km
23½
68° 72° 76° 80° 84° 88° 92° 96°
36° 32° 28° 24° 20° 16° 12° 8°

**ಗಾತ್ರ (Size) :** ಭಾರತವು ಒಟ್ಟು 32,87,263 (ಅಂದರೆ 32.87 ಲಕ್ಷ) ಚದರ ಕಿ.ಮಿಗಳಷ್ಟು ವಿಸ್ತಾರವಾಗಿದೆ. ಭೂಕ್ಷೇತ್ರದ ದೃಷ್ಟಿಯಿಂದ ಇದು ಪ್ರಪಂಚದ ಏಳನೆಯ ದೊಡ್ಡ ರಾಷ್ಟ್ರ. ಪ್ರಪಂಚದ ಭೂಕ್ಷೇತ್ರದ ಶೇ. 2.4 ರಷ್ಟನ್ನು ಒಳಗೊಂಡಿದೆ. ಇದರಲ್ಲಿ ಒಟ್ಟು 28 ರಾಜ್ಯ ಹಾಗೂ 8 ಕೇಂದ್ರಾಡಳಿತ ಪ್ರದೇಶಗಳಿವೆ. 'ದೆಹಲಿಯನ್ನು ರಾಷ್ಟ್ರೀಯ ರಾಜಧಾನಿ ಪ್ರದೇಶ' **(NCT- National Capital Territory)** ಎಂದು ಕರೆಯಲಾಗಿದೆ. ಭಾರತವು 2011 ರ ಜನಗಣತಿಯ ಪ್ರಕಾರ 121 ಕೋಟಿ ಜನಸಂಖ್ಯೆಯನ್ನು ಒಳಗೊಂಡಿದೆ. ಇದು ಪ್ರಪಂಚದ ಒಟ್ಟು ಜನಸಂಖ್ಯೆಯ ಶೇ. 17.5 ರಷ್ಟಿರುವುದು. ಪ್ರಪಂಚದಲ್ಲಿ ಭಾರತವು ಚೀನಾ ದೇಶದ ನಂತರ ಎರಡನೆಯ ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ರಾಷ್ಟ್ರವಾಗಿದೆ.

**ಭಾರತದ ಸ್ಥಾನ**

ಭಾರತವು ಭೌಗೋಳಿಕವಾಗಿ ಉತ್ತರ ಗೋಳಾರ್ಧ ಹಾಗೂ ಪೂರ್ವ ಗೋಳಾರ್ಧದ ಮಧ್ಯದಲ್ಲಿ ನೆಲೆಸಿದೆ. ಇದು ಆಗ್ನೇಯ ಏಷ್ಯಾದ ಒಂದು ಪ್ರಮುಖ ಪರ್ಯಾಯ ದ್ವೀಪ. ಭಾರತದ ಪ್ರಧಾನ ಭೂಭಾಗವು $8^{o}4'$ ದಿಂದ $37^{o}6'$ ಉತ್ತರ ಅಕ್ಷಾಂಶ ಹಾಗೂ $68^{o}7'$ ರಿಂದ $97^{o}25'$ ಪೂರ್ವ ರೇಖಾಂಶಗಳ ನಡುವೆ ವಿಸ್ತರಿಸಿದೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಇನ್ನೂ ದಕ್ಷಿಣಕ್ಕೆ ವಿಸ್ತರಿಸಿವೆ. ನಿಕೋಬಾರ್ ದ್ವೀಪದ $6^{o}.45'$ ದಕ್ಷಿಣ ಅಕ್ಷಾಂಶದಲ್ಲಿರುವ 'ಇಂದಿರಾ ಪಾಯಿಂಟ್' ಭಾರತದ ಅತ್ಯಂತ ದಕ್ಷಿಣ ತುದಿಯಾಗಿದೆ. ಇದಕ್ಕೆ ಪ್ರತಿಯಾಗಿ ಜಮ್ಮು ಮತ್ತು ಕಾಶ್ಮೀರದ ಇಂದಿರಾಕೋಲ್ ಭಾರತದ ಅತ್ಯಂತ ಉತ್ತರ ತುದಿಯಾಗಿದೆ.

**ನಿಮಗೆ ಇದು ತಿಳಿದಿರಲಿ**

**ಭಾರತದ ನೆರೆಯ ರಾಷ್ಟ್ರಗಳು**

| ರಾಷ್ಟ್ರಗಳು | ಭಾರತದೊಡನೆ ಗಡಿ ರೇಖೆಯ ಉದ್ದ ಕಿ.ಮೀ |
|---|---|
| ಪಾಕಿಸ್ತಾನ | 3310 |
| ಅಫ್ಘಾನಿಸ್ತಾನ | 80 |
| ಚೀನಾ | 3917 |
| ನೇಪಾಳ | 1752 |
| ಭೂತಾನ್ | 587 |
| ಮಯನ್ಮಾರ್ | 1458 |
| ಬಾಂಗ್ಲಾದೇಶ | 4096 |
| ಶ್ರೀಲಂಕಾ | -- |
| ಮಾಲ್ಡೀವ್ಸ್ | -- |
| **ಭಾರತ** | **15200** |

ಭಾರತದ ಮಧ್ಯಭಾಗದಲ್ಲಿ ಕರ್ಕಾಟಕ ಸಂಕ್ರಾಂತಿ ವೃತ್ತ ($23\frac{1}{2}^{0}$ ಉ)ವು ಹಾಯ್ದು ಹೋಗಿದೆ ಮತ್ತು $82\frac{1}{2}^{0}$ ಪೂರ್ವ ರೇಖಾಂಶ (ಪ್ರಯಾಗ / ಅಲಹಾಬಾದ್) ವು ದೇಶದ ಮಧ್ಯದಲ್ಲಿ ಹಾಯ್ದು ಹೋಗಿದೆ. ಇದು ಭಾರತದ ಮಧ್ಯ ರೇಖಾಂಶವಾಗಿದ್ದು ಭಾರತೀಯ ಆದರ್ಶಕಾಲಮಾನವು (*IST*) ಈ ರೇಖಾಂಶವನ್ನಾಧರಿಸಿದೆ.

**ಭೂಮೇರೆಗಳು ಮತ್ತು ನೆರೆಯ ರಾಷ್ಟ್ರಗಳು :**

ಭಾರತವು ಒಂದು ಪರ್ಯಾಯ ದ್ವೀಪವಾಗಿದ್ದು ಇದು ಭೂ ಮತ್ತು ಜಲ ಮೇರೆಗಳೆರಡನ್ನೂ ಒಳಗೊಂಡಿದೆ. ಭಾರತವು 15,200 ಕಿ.ಮೀ. ಭೂಗಡಿ ಹಾಗೂ 6,100 ಕಿ.ಮೀ ಕರಾವಳಿಯನ್ನು ಹೊಂದಿದೆ.

ಭಾರತವು ಏಳು ರಾಷ್ಟ್ರಗಳೊಡನೆ ಭೂಗಡಿರೇಖೆಯನ್ನು ಹಂಚಿಕೊಂಡಿದೆ. ವಾಯುವ್ಯದಲ್ಲಿ ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನ, ಉತ್ತರದಲ್ಲಿ ಚೀನಾ, ನೇಪಾಳ ಮತ್ತು ಭೂತಾನ್ ಹಾಗೂ ಪೂರ್ವದಲ್ಲಿ ಮಯನ್ಮಾರ್ (ಬರ್ಮಾ) ಹಾಗೂ ಬಾಂಗ್ಲಾ ದೇಶಗಳೊಡನೆ ಭೂಗಡಿಯನ್ನು ಹೊಂದಿದೆ. ಇದಲ್ಲದೆ

©KTBS NOT TO BE REPUBLISHED

ದೇಶದ ದಕ್ಷಿಣದಲ್ಲಿರುವ ಶ್ರೀಲಂಕಾ ಹಾಗೂ ನೈರುತ್ಯದಲ್ಲಿರುವ ಮಾಲ್ಡೀವ್ಸ್ ದ್ವೀಪಗಳೂ ಸಹ ಭಾರತದ ನೆರೆಯ ರಾಷ್ಟ್ರಗಳಾಗಿವೆ.

**ನಿಮಗೆ ಇದು ತಿಳಿದಿರಲಿ**

- ಭಾರತ ಮತ್ತು ಪಾಕಿಸ್ತಾನದ ನಡುವೆ ಇರುವ ಗಡಿರೇಖೆ 'ರ್‍ಯಾಡ್‌ಕ್ಲಿಫ್' *(Radcliffe line)* ರೇಖೆ
- ಭಾರತ ಮತ್ತು ಚೀನಾದ ನಡುವೆ ಇರುವ ಗಡಿರೇಖೆ 'ಮ್ಯಾಕ್‌ಮೋಹನ್' *(McMohan line)* ರೇಖೆ
- ಭಾರತ ಮತ್ತು ಅಫ್ಘಾನಿಸ್ತಾನದ ನಡುವೆ ಇರುವ ಗಡಿ 'ಡ್ಯೂರ್‍ಯಾಂಡ್' *(Durand line)* ರೇಖೆ

## ಪ್ರಾಕೃತಿಕ ವಿಭಾಗಗಳು

ಭಾರತವು ವಿವಿಧ ಬಗೆಯ ಭೂಸ್ವರೂಪಗಳನ್ನು ಒಳಗೊಂಡಿದೆ. ಈ ಸ್ವರೂಪಗಳು ದೇಶದ ವಿವಿಧ ಭಾಗಗಳಲ್ಲಿ ಕಂಡು ಬರುತ್ತವೆ. ಇವುಗಳ ಭೂಇತಿಹಾಸ ವಿವಿಧ ಅವಧಿಗಳಲ್ಲಿ ನಿರ್ಮಿತವಾಗಿದ್ದು, ಭೂರಚನೆ ಹಾಗೂ ಮೇಲ್ಮೈ ಲಕ್ಷಣಗಳಲ್ಲಿ ವ್ಯತ್ಯಾಸಗಳನ್ನು ಹೊಂದಿದೆ. ಇವುಗಳನ್ನು ಆಧರಿಸಿ ದೇಶವನ್ನು ನಾಲ್ಕು ಪ್ರಧಾನ ಭೂಸ್ವರೂಪ ವಿಭಾಗಗಳಾಗಿ ವಿಂಗಡಿಸಬಹುದು.

### 1) ಉತ್ತರದ ಪರ್ವತಗಳು :

ಉತ್ತರದಲ್ಲಿರುವ ಹಿಮಾಲಯ ಪರ್ವತ ಶ್ರೇಣಿಯು ಜಗತ್ತಿನಲ್ಲಿಯೇ ಅತಿ ಎತ್ತರವಾದ ಶಿಖರಗಳನ್ನು ಆಳವಾದ ಕಣಿವೆಗಳನ್ನು, ಹಿಮನದಿ ಮುಂತಾದವುಗಳನ್ನು ಹೊಂದಿದೆ. ಹಿಮಾಲಯ ಪರ್ವತ ಶ್ರೇಣಿಯು ಪಾಮಿರ್ ಗ್ರಂಥಿಯಿಂದ ಪ್ರಾರಂಭವಾಗಿ ಪೂರ್ವದಲ್ಲಿ ಅರುಣಾಚಲದವರೆಗೆ ಸುಮಾರು 2,500 ಕಿ.ಮೀ. ಉದ್ದವಾಗಿ ಹಬ್ಬಿದೆ. ಈ ಮಡಿಕೆ ಪರ್ವತ ಶ್ರೇಣಿಗಳು ಮೂರು ಪ್ರಮುಖ ಶ್ರೇಣಿಗಳನ್ನು ಒಳಗೊಂಡಿದೆ. ಇವುಗಳೆಂದರೆ ಅ) ಶಿವಾಲಿಕ್ ಶ್ರೇಣಿ (ಹಿಮಾಲಯದ ಪಾದ ಬೆಟ್ಟಗಳು), ಬ) ಹಿಮಾಚಲ (ಮಧ್ಯ ಹಿಮಾಲಯ), ಕ) ಮಹಾಹಿಮಾಲಯ (ಹಿಮಾದ್ರಿ).

**ಅ) ಶಿವಾಲಿಕ್ ಶ್ರೇಣಿ :** ಇದು ಹಿಮಾಲಯ ಪರ್ವತಗಳಲ್ಲಿ ಇತ್ತೀಚಿಗೆ ನಿರ್ಮಿತವಾದುದು. ಇದು ಅತ್ಯಂತ ದಕ್ಷಿಣದಲ್ಲಿರುವ ಸರಣಿ ಹಾಗೂ ಅತಿ ಕಡಿಮೆ ಎತ್ತರವನ್ನು ಹೊಂದಿದೆ. ಇದನ್ನು ಹಿಮಾಲಯದ **ಪಾದ ಬೆಟ್ಟಗಳು** ಎಂದೂ ಸಹ ಕರೆಯುವರು. ಇಲ್ಲಿ ಸಮತಟ್ಟಾದ ಕಿರಿದಾದ ಮೈದಾನಗಳಿವೆ. ಈ ಮೈದಾನಗಳನ್ನು ಡೂನ್‌ಗಳು ಎಂದು ಕರೆಯುವರು. ಉದಾ : ಡೆಹರಾ ಡೂನ್, ಕೋಟಾ, ಪಾಟ್ಲಿ ಚೌಕಾಂಬಾ, ಉದಾಂಪೂರ ಮತ್ತು ಕೋಟ್ಲಾಗಳು. ಇವು ಸಮುದ್ರದಿಂದ 600–1,500 ಮಿ.ಗಳಷ್ಟು ಎತ್ತರವಾಗಿವೆ.

**ಬ) ಹಿಮಾಚಲ (ಮಧ್ಯ ಹಿಮಾಲಯ) :** ಇದು ಮಹಾ ಹಿಮಾಲಯ ಮತ್ತು ಶಿವಾಲಿಕ್ ಬೆಟ್ಟಗಳ ನಡುವೆ ಸುಮಾರು 3,600 ಮೀ.ಗಳಿಂದ 4,500 ಮೀ ಗಳಷ್ಟು ಸರಾಸರಿ ಎತ್ತರವನ್ನು ಹೊಂದಿವೆ. ಇವು 60 ರಿಂದ 80 ಕಿ.ಮೀ ಅಗಲವಾಗಿವೆ. ಇಲ್ಲಿ ಅನೇಕ ಸಮಾನಾಂತರ ಪರ್ವತ ಶ್ರೇಣಿಗಳಿವೆ. ಉದಾಹರಣೆಗೆ ಪೀರ್‌ಪಂಜಾಲ, ಮಹಾಭಾರತಶ್ರೇಣಿ, ನಾಗತಿಬ್ಬ, ಮಸ್ಸೋರಿ ಇತ್ಯಾದಿ. ಕಂಗ್ರಾ, ಕುಲು ಇವು ಪ್ರಸಿದ್ಧ ಕಣಿವೆಗಳಾಗಿವೆ. ಶಿಮ್ಲಾ, ಮಸ್ಸೂರಿ, ನೈನಿತಾಲ್, ರಾಣಿಖೇಟ್, ಚಕ್ರಾತ ಮತ್ತು ಡಾರ್ಜಿಲಿಂಗ್ ಇತ್ಯಾದಿ ಗಿರಿಧಾಮಗಳಿವೆ.

© KTBS NOT TO BE REPUBLISHED

**ಕ) ಮಹಾ ಹಿಮಾಲಯ (ಹಿಮಾದ್ರಿ) :** ಇದು ಹಿಮಾಲಯ ಪರ್ವತಗಳಲ್ಲಿ ಅತಿ ಎತ್ತರವಾದ ಹಾಗೂ ಮೊದಲು ನಿರ್ಮಿತಗೊಂಡಿರುವ ಸರಣಿಯಾಗಿದೆ. ಇದು ಸಂಪೂರ್ಣವಾಗಿ **ಹಿಮದಿಂದ ಆವೃತವಾಗಿದೆ.** ಆದುದರಿಂದ ಇದನ್ನು **ಹಿಮಾದ್ರಿ** ಎಂದು ಕರೆಯುತ್ತಾರೆ. ಸಮುದ್ರ ಮಟ್ಟದಿಂದ ಈ ಶ್ರೇಣಿಯು 6,000 ಮೀ. ದಿಂದ 8,000 ಮೀ. ಗಿಂತಲೂ ಹೆಚ್ಚು ಎತ್ತರವಾಗಿದೆ. ಹಿಮಾಲಯದಲ್ಲಿ ಅತ್ಯಂತ ಎತ್ತರವಾದ ಶಿಖರಗಳು ಇವೆ. ಪ್ರಪಂಚದಲ್ಲಿಯೇ ಅತ್ಯುನ್ನತ ಶಿಖರವಾದ **ಮೌಂಟ್ ಎವರೆಸ್ಟ್** (8,848 ಮೀ) ನೇಪಾಳ ಮತ್ತು ಟಿಬೆಟ್ ಮಧ್ಯದಲ್ಲಿದೆ. ಈ ಸರಣಿಯಲ್ಲಿರುವ ಇತರೆ ಮುಖ್ಯ ಶಿಖರಗಳೆಂದರೆ ಕಾಂಚನ ಗಂಗಾ, ಧವಳಗಿರಿ, ನಂದಾದೇವಿ, ಗೌರಿಶಂಕರ. ಇವು ಅನೇಕ ಹಿಮನದಿಗಳನ್ನು ಹೊಂದಿವೆ. ಅವುಗಳಲ್ಲಿ ಗಂಗೋತ್ರಿ ಪ್ರಸಿದ್ಧವಾಗಿದ್ದು ಗಂಗಾನದಿಯ ಉಗಮ ಸ್ಥಾನವಾಗಿದೆ. ಕಾಶ್ಮೀರದ ಬುರ್ಜಿಲ್, ಜೋಜಿಲಾ, ಹಿಮಾಚಲ ಪ್ರದೇಶದ ಬಾರಾಲಾಘ್‌ಚ, ಮುಂತಾದ ಕಣಿವೆ ಮಾರ್ಗಗಳು ಉತ್ತಮ ಸಂಚಾರ ಸೌಲಭ್ಯವನ್ನು ಒದಗಿಸಿರುವುದಲ್ಲದೆ, ಪ್ರವಾಸಿಗರಿಗೆ ಆಕರ್ಷಣೀಯ ಕೇಂದ್ರಗಳಾಗಿವೆ.

ಮಹಾ ಹಿಮಾಲಯ ಸರಣಿಯ ಉತ್ತರಕ್ಕಿರುವ ಮಡಿಕೆ ಪರ್ವತಗಳನ್ನು ಹೊರ ಹಿಮಾಲಯವೆಂದು ಕರೆಯುತ್ತಾರೆ. ಇದರಲ್ಲಿ ಕಾರಾಕೋರಮ್ ಪರ್ವತಶ್ರೇಣಿ ಹಾಗೂ ಕೈಲಾಸ ಪರ್ವತಗಳಿವೆ. ಗಾಡ್ವಿನ್‌ಆಸ್ಟಿನ್ ಅಥವಾ K2 ಎಂಬುದು ಭಾರತದಲ್ಲಿ ಅತಿ ಎತ್ತರವಾದ (8,611ಮೀ) ಶಿಖರವಾಗಿದೆ. 'ಲಡಾಖ್' ಪ್ರಸ್ಥಭೂಮಿಯೂ ಇದೇ ಪ್ರದೇಶದಲ್ಲಿ ಕಂಡು ಬರುತ್ತದೆ.

**ಹಿಮಾಲಯದ ಮಹತ್ವ :** ಹಿಮಾಲಯ ಪರ್ವತ ಶ್ರೇಣಿಗಳು ಭಾರತದ ಜನಜೀವನದ ಮೇಲೆ ಅಪಾರ ಪ್ರಭಾವವನ್ನು ಬೀರುತ್ತವೆ. ಇವು ಭಾರತಕ್ಕೆ ರಕ್ಷಣೆಯನ್ನು ಒದಗಿಸುತ್ತವೆ. ಉತ್ತರ ಏಷ್ಯಯಾದಿಂದ ಬೀಸುವ ಶೀತಗಾಳಿಗಳನ್ನು ತಡೆಹಿಡಿಯುತ್ತವೆ. ನದಿಗಳ ಉಗಮ ಪ್ರದೇಶವಾಗಿವೆ. ಜಲವಿದ್ಯುಚ್ಛಕ್ತಿ ಉತ್ಪಾದನೆಗೆ ಅನುಕೂಲವಾಗಿವೆ. ಇದು ವಿಶಾಲವಾದ ಮೈದಾನಗಳನ್ನು ನಿರ್ಮಿಸಿವೆ. ವೈವಿಧ್ಯಮಯ ಸಸ್ಯ ಮತ್ತು ಪ್ರಾಣಿ ಸಂಕುಲಗಳಿಗೆ ಆಶ್ರಯ ತಾಣವಾಗಿದೆ. ಅಪಾರ ಪ್ರಮಾಣದ ಖನಿಜ ಸಂಪನ್ಮೂಲಗಳನ್ನು ಒಳಗೊಂಡಿವೆ ಹಾಗೂ ಪ್ರವಾಸೋದ್ಯಮ ಮತ್ತು ಧಾರ್ಮಿಕ ಕೇಂದ್ರಗಳಿಗೆ ಪ್ರಸಿದ್ಧಿಯಾಗಿದೆ.

**2. ಉತ್ತರದ ಮಹಾ ಮೈದಾನ :**

ಉತ್ತರ ಭಾರತದ ಮಹಾ ಮೈದಾನವನ್ನು ಸಟ್ಲೇಜ್ ಗಂಗಾ ಮೈದಾನವೆಂತಲೂ ಕರೆಯುವರು. ಇದು ಉತ್ತರದಲ್ಲಿ ಹಿಮಾಲಯ ಪರ್ವತಗಳು ಹಾಗೂ ದಕ್ಷಿಣದಲ್ಲಿ ಪರ್ಯಾಯ ಪ್ರಸ್ಥಭೂಮಿಯ ನಡುವೆ ಕಂಡು ಬರುವುದು. ಈ ಮೈದಾನವು ಪಶ್ಚಿಮದ ಸಿಂಧೂ ನದಿಯ ಮೈದಾನದಿಂದ ಪೂರ್ವದಲ್ಲಿ ಬ್ರಹ್ಮಪುತ್ರ ಕಣಿವೆಯವರೆಗೂ ವಿಸ್ತರಿಸಿದೆ. ಪಶ್ಚಿಮದಿಂದ ಪೂರ್ವಕ್ಕೆ ಸುಮಾರು 2,400 ಕಿ.ಮೀ ಉದ್ದವಾಗಿರುವ ಈ ಮೈದಾನವು 70 ರಿಂದ 500 ಕಿ.ಮೀ. ಅಗಲವಾಗಿದೆ. ಈ ಮೈದಾನವು ಬಹುತೇಕವಾಗಿ ಸಮತಟ್ಟಾಗಿದೆ. ಉತ್ತರ ಭಾರತದ ಮೈದಾನವು, ನದಿಗಳು ಹೊತ್ತು ತಂದು ಹಾಕಿದ ಮೆಕ್ಕಲು ಮಣ್ಣಿನಿಂದ ನಿರ್ಮಿತವಾಗಿರುವ **ಸಂಚಯನ ಮೈದಾನ**ವಾಗಿದೆ.


**ನಿಮಗೆ ತಿಳಿದಿರಲಿ :**

1. **ಬಬರ್, ಭಂಗರ್ ಮತ್ತು ಖದರ್ :** ಹಿಮಾಲಯದ ತಪ್ಪಲಿನಲ್ಲಿ ನದಿಗಳು ಮೈದಾನವನ್ನು ಪ್ರವೇಶಿಸುವ ಕಡೆ ಅವುಗಳು ಹೊತ್ತು ತಂದ ದಪ್ಪ ಶಿಲಾ ಚೂರುಗಳನ್ನು ಸಂಚಯಿಸಿದೆ. ಇದನ್ನೆ **ಬಬರ್** ಎಂದು ಕರೆಯುವರು. ಪುರಾತನ ಕಾಲದಲ್ಲಿ ಸಂಚಯಿತವಾಗಿರುವ ಮೆಕ್ಕಲು ಮಣ್ಣಿನ ವಲಯವನ್ನು **ಭಂಗರ್** ಎಂದು ಕರೆಯುವರು. ಇತ್ತೀಚಿನ ಅವಧಿಯಲ್ಲಿ ಸಂಚಯಿತಗೊಂಡು ನಿರ್ಮಿತವಾಗಿರುವ ಮೆಕ್ಕಲು ಮಣ್ಣನ್ನು **ಖದರ್** ಎಂದು ಕರೆಯುವರು.
2. ಮೌಂಟ್ ಎವರೆಸ್ಟ್ ಪರ್ವತದ ಎತ್ತರವನ್ನು ಮೊದಲ ಬಾರಿಗೆ ನಿಖರವಾಗಿ ಗುರುತಿಸಿದವರು ರಾಧಾನಾಥ್ ಸಿಕ್ದರ್. ಈತ ಭಾರತದಲ್ಲಿ ನಡೆಯುತ್ತಿದ್ದ ಗ್ರೇಟ್ ಟ್ರಿಗೊನಮೆಟ್ರಿಕಲ್ ಸರ್ವೆಯಲ್ಲಿ ಉದ್ಯೋಗಿಯಾಗಿದ್ದರು.

© KTBS NOT TO BE REPUBLISHED

**3) ಪರ್ಯಾಯ ಪ್ರಸ್ಥಭೂಮಿ :**

ಪರ್ಯಾಯ ಪ್ರಸ್ಥಭೂಮಿಯು ಭಾರತದ ಭೂಸ್ವರೂಪ ವಿಭಾಗಗಳಲ್ಲಿ ಅತಿ ದೊಡ್ಡದು. ಅಲ್ಲದೆ ಭೂ ಇತಿಹಾಸದ ಪ್ರಕಾರ ಇದು 'ಅತಿ ಪುರಾತನ'ವಾಗಿದ್ದು ಭೂ ಖಂಡಗಳ ಆರಂಭದಲ್ಲಿದ್ದ ಗೊಂಡ್ವಾನ ಭೂರಾಶಿಯ ಒಂದು ಭಾಗವಾಗಿದೆಯೆಂದು ಭೂವಿಜ್ಞಾನಿಗಳು ಅಭಿಪ್ರಾಯ ಪಟ್ಟಿದ್ದಾರೆ.




ಈ ಪ್ರಸ್ಥಭೂಮಿಯು ಸಟ್ಲಜ್‌ಗಂಗಾ ಮೈದಾನದ ದಕ್ಷಿಣದಲ್ಲಿ ಹಿಂದೂಮಹಾಸಾಗರದವರೆಗೂ ಚಾಚಿಕೊಂಡಿದೆ. ಇದರ ಒಟ್ಟು ಕ್ಷೇತ್ರ ಸುಮಾರು 16 ಲಕ್ಷ ಚ.ಕಿ.ಮೀ. ಇದು ಉತ್ತರದಲ್ಲಿ ಅರಾವಳಿ ಪರ್ವತದಿಂದ ದಕ್ಷಿಣದ ಕನ್ಯಾಕುಮಾರಿಯವರೆಗೂ ಹರಡಿದೆ. ಪಶ್ಚಿಮದಲ್ಲಿ ಪಶ್ಚಿಮ ಘಟ್ಟಗಳಿಂದ ಪೂರ್ವದಲ್ಲಿ 'ಜಾರ್ಖಂಡ್'ನ ರಾಜಮಹಲ್ ಬೆಟ್ಟಗಳವರೆಗೆ ಸುಮಾರು 1,400 ಕಿ.ಮೀ ಅಗಲವಾಗಿದೆ. ಈ ಪರ್ಯಾಯ ಪ್ರಸ್ಥಭೂಮಿಯು ತ್ರಿಕೋನಾಕೃತಿಯಲ್ಲಿದ್ದು ಉತ್ತರದಲ್ಲಿ ಅಗಲವಾಗಿದ್ದು ದಕ್ಷಿಣದ ಕಡೆಗೆ ಕಿರಿದಾಗಿದೆ. ಪಶ್ಚಿಮದಲ್ಲಿ ಅರಬ್ಬೀಸಮುದ್ರ ಪೂರ್ವದಲ್ಲಿ ಬಂಗಾಳಕೊಲ್ಲಿ ಹಾಗೂ ದಕ್ಷಿಣದಲ್ಲಿ ಹಿಂದೂ ಮಹಾಸಾಗರಗಳನ್ನು ಇದು ಒಳಗೊಂಡಿದೆ.

ಈ ಪ್ರಸ್ಥಭೂಮಿಯ ಉತ್ತರಭಾಗದಲ್ಲಿ ಪ್ರಮುಖವಾಗಿ ವಿಂಧ್ಯ ಪರ್ವತಗಳು, ಸಾತ್ಪುರಾ ಬೆಟ್ಟ, ಅರಾವಳಿ ಬೆಟ್ಟಗಳು, ಮಾಳ್ವಾ ಪ್ರಸ್ಥಭೂಮಿ, ಛೋಟಾನಾಗಪುರ ಪ್ರಸ್ಥಭೂಮಿಗಳಿದ್ದು ಇವುಗಳ ಮಧ್ಯದಲ್ಲಿ ನರ್ಮದಾ ಮತ್ತು ತಪತಿ ನದಿ ಹಾಗೂ ದಾಮೋದರನದಿಗಳಲ್ಲದೇ ಅನೇಕ ಚಿಕ್ಕ ನದಿಗಳು ಹರಿಯುತ್ತವೆ. ಇವೆಲ್ಲವುಗಳನ್ನು ಕೇಂದ್ರ ಪ್ರಸ್ಥಭೂಮಿ ಎನ್ನುವರು. ಇವುಗಳ ದಕ್ಷಿಣದಲ್ಲಿ ದಖನ್ ಪ್ರಸ್ಥಭೂಮಿಯಿದ್ದು, ಮಹಾದೇವ, ಮೈಕಲ ಶ್ರೇಣಿ, ಅಮರಕಂಟಕ ಬೆಟ್ಟಗಳು, ರಾಜಮಹಲ ಬೆಟ್ಟಗಳು ಇದರ ಉತ್ತರದಲ್ಲಿವೆ. ದಖನ್ ಪ್ರಸ್ಥಭೂಮಿಯ ಪಶ್ಚಿಮದಲ್ಲಿ ಪಶ್ಚಿಮ ಘಟ್ಟಗಳಿವೆ. ಇವುಗಳನ್ನು ಮಹಾರಾಷ್ಟ್ರ ಹಾಗೂ ಕರ್ನಾಟಕದಲ್ಲಿ ಸಹ್ಯಾದ್ರಿ ಎಂದು ಕರೆಯುತ್ತಾರೆ. ಅಣ್ಣಾಮಲೈ ಸರಣಿಯ 'ಅನೈಮುಡಿ' (2,665 ಮೀಟರ್) ಶಿಖರ ದಕ್ಷಿಣ ಭಾರತದಲ್ಲಿಯೇ ಅತ್ಯುನ್ನತ ಪ್ರದೇಶವಾಗಿದೆ. ದಖನ್ ಪ್ರಸ್ಥಭೂಮಿಯ ಪೂರ್ವಕ್ಕೆ ಪೂರ್ವಘಟ್ಟಗಳಿವೆ. ಅವು ಪಶ್ಚಿಮ ಘಟ್ಟಗಳನ್ನು ನೀಲಗಿರಿ ಬೆಟ್ಟಗಳಲ್ಲಿ ಸಂಧಿಸುತ್ತವೆ. ಪೂರ್ವ ಘಟ್ಟಗಳು ಹೆಚ್ಚು ಎತ್ತರವಾಗಿಲ್ಲ ಮತ್ತು ನಿರಂತರವಾಗಿಯೂ ಇಲ್ಲ. ಆರ್ಮಕೊಂಡ ಮತ್ತು ಮಹೇಂದ್ರಗಿರಿ ಇಲ್ಲಿರುವ ಎತ್ತರವಾದ ಶಿಖರಗಳು. ಈ ಘಟ್ಟಗಳು ನದಿ ಕಣಿವೆಗಳಿಂದ ಅಲ್ಲಲ್ಲಿ ಪ್ರತ್ಯೇಕಿಸಲ್ಪಟ್ಟಿವೆ.

ಈ ಪರ್ಯಾಯ ಪ್ರಸ್ಥಭೂಮಿಯು ಆರ್ಥಿಕವಾಗಿ ಹೆಚ್ಚು ಪ್ರಾಮುಖ್ಯತೆಯನ್ನು ಪಡೆದಿದೆ. ಏಕೆಂದರೆ ಇಲ್ಲಿ ಅಪಾರವಾದ ಖನಿಜ ಸಂಪನ್ಮೂಲಗಳಿವೆ. ಇಲ್ಲಿನ ನದಿಗಳು ಜಲಪಾತಗಳಿಂದ ಕೂಡಿರುವುದರಿಂದ ಜಲವಿದ್ಯುಚ್ಛಕ್ತಿಯ ಉತ್ಪಾದನೆಗೆ ಅನುಕೂಲವಾಗಿವೆ.

**4) ಕರಾವಳಿ ಮೈದಾನಗಳು :**

ಭಾರತವು ದ್ವೀಪಗಳನ್ನು ಹೊರತುಪಡಿಸಿ 6,100 ಕಿ.ಮೀ ಉದ್ದ ಕರಾವಳಿಯನ್ನು ಹೊಂದಿದೆ. ಇದು ಪಶ್ಚಿಮದಲ್ಲಿ ಗುಜರಾತಿನ ಕಛ್ ಪ್ರದೇಶದಿಂದ ಪೂರ್ವದಲ್ಲಿ ಗಂಗಾ ನದಿಯ ಮುಖಜಭೂಮಿಯವರೆಗೂ ವಿಸ್ತರಿಸಿದೆ. ತೀರ ಪ್ರದೇಶದ ಉದ್ದಕ್ಕೂ ಕಂಡು ಬರುವ ಕಿರಿದಾದ ಮೈದಾನವನ್ನು ಕರಾವಳಿ ಮೈದಾನವೆಂದು ಕರೆಯುವರು. ಭಾರತದ ಕರಾವಳಿಯನ್ನು 'ಪಶ್ಚಿಮ ಕರಾವಳಿ' ಮತ್ತು 'ಪೂರ್ವ ಕರಾವಳಿ' ಎಂದು ಎರಡು ಭಾಗಗಳಾಗಿ ವಿಂಗಡಿಸಲಾಗಿದೆ.

ಪಶ್ಚಿಮ ಕರಾವಳಿಯು ಅರಬ್ಬೀ ಸಮುದ್ರ ಮತ್ತು ಪಶ್ಚಿಮ ಘಟ್ಟಗಳ ನಡುವೆ ಗುಜರಾತಿನ ಕಛ್‌ನಿಂದ ಕನ್ಯಾಕುಮಾರಿ ಭೂಶಿರದವರೆಗೆ 1,500 ಕಿ.ಮೀ.ಗಳಷ್ಟು ಉದ್ದವಾಗಿದೆ. ಇದನ್ನು ಕೇರಳದಲ್ಲಿ ಮಲಬಾರ್ ತೀರ, ಕರ್ನಾಟಕದಲ್ಲಿ ಕರ್ನಾಟಕ ಅಥವಾ ಕೆನರಾತೀರ, ಗೋವಾ ಮತ್ತು ಮಹಾರಾಷ್ಟ್ರದಲ್ಲಿ ಕೊಂಕಣತೀರ ಮತ್ತು ಗುಜರಾತಿನಲ್ಲಿ ಗುಜರಾತ್ ತೀರ ಎಂದು ವಿಂಗಡಿಸಲಾಗಿದೆ. ಮುಂಬೈ, ಮರ್ಮಗೋವಾ, ಕೊಚ್ಚಿನ್, ಕಾಂಡ್ಲಾ, ಕಾರವಾರ, ಮಂಗಳೂರು ಇಲ್ಲಿನ ಮುಖ್ಯ ಬಂದರುಗಳಾಗಿವೆ. ಕನ್ಯಾಕುಮಾರಿಯಿಂದ ಉತ್ತರದಲ್ಲಿ ಗಂಗಾನದಿ ಮುಖಜ ಭೂಮಿಯವರೆಗೆ ಪೂರ್ವ ಘಟ್ಟಗಳು ಹಬ್ಬಿವೆ. ಪೂರ್ವ ಘಟ್ಟ ಹಾಗೂ ಬಂಗಾಳಕೊಲ್ಲಿಯ ನಡುವೆ ಪೂರ್ವ ಕರಾವಳಿ ಮೈದಾನವಿದೆ. ಈ ಕರಾವಳಿಯ ಮೈದಾನವು ಹೆಚ್ಚು ಅಗಲ ಮತ್ತು ಒಂದೇ ರೀತಿ ಸಮತಟ್ಟಾಗಿದೆ. ಇದು ಮಹಾನದಿ, ಗೋದಾವರಿ, ಕೃಷ್ಣಾ ಮತ್ತು ಕಾವೇರಿ ನದಿಗಳ ಮುಖಜ ಭೂಮಿಗಳನ್ನು ಒಳಗೊಂಡಿದೆ. ಪೂರ್ವ ತೀರದಲ್ಲಿ ಸಮುದ್ರದ ಉಪ್ಪು ನೀರಿನಿಂದ ನಿರ್ಮಿತವಾದ ಕೆಲವು ಸರೋವರ ಅಥವಾ ಲಗೂನ್‌ಗಳಿವೆ. ಇವುಗಳಲ್ಲಿ ಒಡಿಸ್ಸಾದ ಚಿಲ್ಕಾ, ತಮಿಳುನಾಡಿನ 'ಪುಲಿಕಾಟ್' ಸರೋವರಗಳು ಮುಖ್ಯವಾಗಿವೆ. ಪೂರ್ವ ಕರಾವಳಿಯನ್ನು ಉತ್ಕಲ ತೀರ ಮತ್ತು ಕೋರಮಂಡಲ ತೀರ ಎಂದು ವಿಂಗಡಿಸಲಾಗಿದೆ.

**ದ್ವೀಪಗಳು :** ಭಾರತಕ್ಕೆ ಸೇರಿರುವ ಒಟ್ಟು 247 ದ್ವೀಪಗಳಿವೆ. ಅವುಗಳಲ್ಲಿ 204 ದ್ವೀಪಗಳು ಬಂಗಾಳ ಕೊಲ್ಲಿಯಲ್ಲಿ ಮತ್ತು 43 ದ್ವೀಪಗಳು ಅರಬ್ಬಿ ಸಮುದ್ರದಲ್ಲಿವೆ. ಮನ್ನಾರ್ ಖಾರಿಯಲ್ಲಿ ಕೆಲವು ಹವಳದ

© KTBS NOT TO BE REPUBLISHED

ದ್ವೀಪಗಳಿವೆ. ಬಂಗಾಳ ಕೊಲ್ಲಿಯಲ್ಲಿರುವ ಅಂಡಮಾನ್ ನಿಕೋಬಾರ್ ದ್ವೀಪಗಳು ಗಟ್ಟಿಯಾದ ಜ್ವಾಲಾಮುಖಿ ನಿರ್ಮಿತ ಶಿಲೆಗಳಿಂದ ಕೂಡಿದೆ. ಲಕ್ಷದ್ವೀಪಗಳು ಹವಳದ ದ್ವೀಪಗಳಾಗಿವೆ. ಭಾರತದ ದಕ್ಷಿಣದ ತುದಿಯು ನಿಕೋಬಾರ್ ದ್ವೀಪದ ದಕ್ಷಿಣ ತುದಿಯಲ್ಲಿದೆ. ಇದನ್ನು **ಇಂದಿರಾ ಪಾಯಿಂಟ್** ಎಂದು ಕರೆಯುತ್ತಾರೆ.

## ಅಭ್ಯಾಸಗಳು

**I. ಬಿಟ್ಟ ಸ್ಥಳಗಳನ್ನು ಸೂಕ್ತವಾದ ಪದಗಳಿಂದ ಭರ್ತಿ ಮಾಡಿ.**

1) ಇಂಡಿಯಾ ಎಂಬ ಹೆಸರು ____________ ನದಿಯಿಂದ ಬಳಕೆಗೆ ಬಂದಿದೆ.

2) ಭಾರತವು ಒಟ್ಟು ____________ ಚದರ ಕಿ.ಮೀಗಳಷ್ಟು ವಿಸ್ತಾರವಾಗಿದೆ.

3) ಭಾರತದ ಮಧ್ಯಭಾಗದಲ್ಲಿ____________ಉತ್ತರ ಅಕ್ಷಾಂಶ ಹಾಯ್ದು ಹೋಗುತ್ತದೆ.

4) ಭಾರತದ ದಕ್ಷಿಣ ತುದಿಯಲ್ಲಿರುವ ದೇಶ ____________ .

5) ಭಾರತವು ಹೊಂದಿರುವ ಉದ್ದವಾದ ಕರಾವಳಿಯು____________ಕಿ.ಮೀ.ಗಳಷ್ಟು ಆಗಿದೆ.

6) ಭಾರತದ ಭೂಸ್ವರೂಪವನ್ನು ____________ ಪ್ರಧಾನ ವಿಭಾಗಗಳಾಗಿ ವಿಂಗಡಿಸಲಾಗಿದೆ.

7) ಮಹಾ ಹಿಮಾಲಯವನ್ನು ____________ ಎಂದೂ ಕರೆಯುವರು.

8) ಪ್ರಪಂಚದಲ್ಲಿಯೇ ____________ ಅತ್ಯುನ್ನತ ಶಿಖರವಾಗಿದೆ.

9) ಉತ್ತರ ಭಾರತದ ಮೈದಾನವು ____________ ಮಣ್ಣಿನಿಂದ ನಿರ್ಮಾಣವಾಗಿದೆ.

10) ಕರ್ನಾಟಕದಲ್ಲಿ ಪಶ್ಚಿಮ ಘಟ್ಟಗಳನ್ನು ____________ ಎಂದು ಕರೆಯುವರು.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರ ಬರೆಯಿರಿ.**

1) ಭಾರತವು ಏಷ್ಯಾ ಖಂಡದ ಯಾವ ಭಾಗದಲ್ಲಿದೆ?

2) ಭಾರತವು ಭೂಮಿಯ ಯಾವ ಗೋಳಾರ್ಧದಲ್ಲಿದೆ?

3) ಭಾರತದ ಭೂರಾಶಿಯ ದಕ್ಷಿಣ ತುದಿ ಯಾವುದು?

4) ಭಾರತದ ದಕ್ಷಿಣದ ಭಾಗದ ಭೂಶಿರದ ಹೆಸರೇನು?

5) ಭಾರತದ ಮಧ್ಯಭಾಗದಲ್ಲಿ ಹಾಯ್ದು ಹೋಗುವ ಮುಖ್ಯ ಅಕ್ಷಾಂಶ ಯಾವುದು?

6) ಇಂದಿರಾಪಾಯಿಂಟ್ ಯಾವ ದ್ವೀಪದಲ್ಲಿದೆ?

7) ಹಿಮಾಲಯದ ಪಾದ ಬೆಟ್ಟಗಳ ಮತ್ತೊಂದು ಹೆಸರು ಯಾವುದು?

8) ಭಾರತದ ಭೂಸ್ವರೂಪ ವಿಭಾಗಗಳಲ್ಲಿ ಯಾವುದು ಇತ್ತೀಚಿನ ಅವಧಿಯಲ್ಲಿ ನಿರ್ಮಿತವಾಗಿದೆ?

9) ಹಿಮಾಲಯ ಪರ್ವತದಿಂದಾಗುವ ಪ್ರಯೋಜನಗಳು ಯಾವುವು?

10) ಪರ್ಯಾಯ ಪ್ರಸ್ಥಭೂಮಿಯು ಹೊಂದಿರುವ ವ್ಯಾಪ್ತಿಯನ್ನು ವಿವರಿಸಿ.

NOT TO BE REPUBLISHED @KTBS

11) ಸಿವಾಲಿಕ್ ಶ್ರೇಣಿಯನ್ನು ಕುರಿತು ಬರೆಯಿರಿ.

12) ಉತ್ತರದ ಮೈದಾನವನ್ನು ಸಂಚಯನ ಮೈದಾನವೆಂದು ಕರೆಯುತ್ತಾರೆ. ಏಕೆ?

13) ಪಶ್ಚಿಮ ಘಟ್ಟಗಳು – ಪೂರ್ವ ಘಟ್ಟಗಳಿಗಿರುವ ವ್ಯತ್ಯಾಸವನ್ನು ತಿಳಿಸಿ.

**III. ಚಟುವಟಿಕೆಗಳು :**

1) ಭಾರತದ ನಕ್ಷೆಯನ್ನು ಬರೆದು ಅಕ್ಷಾಂಶ ಮತ್ತು ರೇಖಾಂಶಿಕ ಸ್ಥಾನವನ್ನು ಹಾಗೂ ಮಧ್ಯಭಾಗದಲ್ಲಿ ಹಾಯ್ದುಹೋಗಿರುವ $23\frac{1}{2}^0$ ಅಕ್ಷಾಂಶಿಕ ರೇಖೆಯನ್ನು ಗುರುತಿಸಿರಿ.

2) ಭಾರತದ ನಕ್ಷೆ ಬರೆದು ಪ್ರಮುಖ ಶಿಖರಗಳನ್ನು ಹಾಗೂ ಪಶ್ಚಿಮ, ಪೂರ್ವ ಘಟ್ಟಗಳನ್ನು ಗುರುತಿಸಿ.

3) ಮಂಗಳೂರು, ಧರ್ಮಸ್ಥಳ ಈ ಭಾಗದಲ್ಲಿ ರಸ್ತೆ ಪ್ರಯಾಣಮಾಡಿದಾಗ ಘಟ್ಟ ಪ್ರದೇಶದಲ್ಲಿ ಪ್ರಾಕೃತಿಕವಾಗಿ ಕಾಣುವ ಮತ್ತು ನಿಮಗೆ ಆಗುವ ಅನುಭವಗಳನ್ನು ಶಿಕ್ಷಕರೊಂದಿಗೆ ಹಂಚಿಕೊಳ್ಳಿ.

**IV. ಯೋಜನೆಗಳು :**

1) ಭಾರತದ ನಕ್ಷೆಯನ್ನು ಬರೆದು ಅದರಲ್ಲಿ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳನ್ನು ನಿಮ್ಮ ಬೋಧಕರ ಸಹಾಯದಿಂದ ಗುರುತಿಸಿ.

2) ಭಾರತದ ನಕ್ಷೆ ಬರೆದು, ನೆರೆಯ ರಾಷ್ಟ್ರಗಳನ್ನು ಗುರುತಿಸಿ.

3) ಕರ್ನಾಟಕದ ಪಶ್ಚಿಮ ಘಟ್ಟಗಳು ಮತ್ತು ಮಧ್ಯ ಕರ್ನಾಟಕದ ಮೈದಾನ ಪ್ರದೇಶಗಳಲ್ಲಿನ ಸ್ವಾಭಾವಿಕ ವೈವಿಧ್ಯತೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿ, ವಿಶ್ಲೇಷಣೆ ಮಾಡಿರಿ.

@KTBS NOT TO BE REPUBLISHED

## ಅಧ್ಯಾಯ-11

# ಭಾರತದ ಋತುಗಳು

Z1F8R5

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಭಾರತದ ವಾಯುಗುಣದ ಪ್ರಮುಖ ಲಕ್ಷಣಗಳು.
- ಭಾರತದ ಋತುಮಾನಗಳ ವಾಯುಗುಣದ ಪರಿಸ್ಥಿತಿ.
- ಭಾರತದ ಋತುಕಾಲಿಕ ಮಳೆಯ ಹಂಚಿಕೆ ಮತ್ತು ಪರಿಣಾಮಗಳು.

ಭಾರತವು ಉಷ್ಣವಲಯದ ಮಾನ್ಸೂನ್ ಮಾದರಿಯ ವಾಯುಗುಣವನ್ನು ಹೊಂದಿದೆ. ಈ ಮಾದರಿಯ ವಾಯುಗುಣದಲ್ಲಿ ಮಾರುತಗಳು ವರ್ಷದ ವಿವಿಧ ಋತುಗಳಲ್ಲಿ ಪರಸ್ಪರ ವಿರುದ್ಧ ದಿಕ್ಕಿನಿಂದ ಬೀಸುತ್ತವೆ.

**ನಿಮಗೆ ಇದು ತಿಳಿದಿರಲಿ :**
ಮಾನ್ಸೂನ್ ಎಂಬ ಪದವು ಅರೇಬಿಕ್ ಭಾಷೆಯ 'ಮೌಸಮ್' ಎಂಬ ಪದದಿಂದ ರೂಢಿಗೆ ಬಂದಿದೆ. ಇದು **ನಿಯತಕಾಲಿಕ** ಅಥವಾ ಋತುಮಾನಿಕ ಎಂಬ ಅರ್ಥವನ್ನು ಒಳಗೊಂಡಿದೆ.

ವರ್ಷದ ಅರ್ಧಭಾಗ ನೈಋತ್ಯ ದಿಕ್ಕಿನಿಂದ ಈಶಾನ್ಯದ ಕಡೆಗೆ ಬೀಸುವ ಮಾನ್ಸೂನ್ ಮಾರುತಗಳು, ಉಳಿದ ಅವಧಿಯಲ್ಲಿ ಈಶಾನ್ಯದಿಂದ ನೈಋತ್ಯದ ಕಡೆಗೆ ಬೀಸುತ್ತವೆ. ಜೊತೆಗೆ ಭಾರತವು ಭೌಗೋಳಿಕವಾಗಿ ಉಷ್ಣವಲಯದ ಹಾಗೂ ಸಮಶೀತೋಷ್ಣ ವಲಯ ಗಳೆರಡರಲ್ಲಿಯೂ ಹಂಚಿಕೆಯಾಗಿದೆ. ಅಕ್ಷಾಂಶ, ಸಮುದ್ರ ಮಟ್ಟದಿಂದ ಇರುವ ಎತ್ತರ, ಸಾಗರಗಳಿಂದ ಇರುವ ದೂರ, ಮಾರುತಗಳ ದಿಕ್ಕು, ಪರ್ವತ ಸರಣಿಗಳು ಹಬ್ಬಿರುವ ರೀತಿ, ಸಾಗರ ಪ್ರವಾಹಗಳು ಮುಂತಾದವು ಭಾರತದ ವಾಯುಗುಣದ ಮೇಲೆ ಹೆಚ್ಚು ಪ್ರಭಾವಬೀರುತ್ತವೆ.

ಭಾರತದಲ್ಲಿ ಕಂಡು ಬರುವ ವಾರ್ಷಿಕ ವಾಯುಗುಣವನ್ನು ನಾಲ್ಕು ಋತುಮಾನಗಳನ್ನಾಗಿ ವಿಂಗಡಿಸಲಾಗಿದೆ.

1) **ಬೇಸಿಗೆ ಕಾಲ** – ಮಾರ್ಚ್‌ನಿಂದ–ಮೇವರೆಗೆ
2) **ನೈಋತ್ಯ ಮಾನ್ಸೂನ್ ಕಾಲ ಅಥವಾ ಮುಂಗಾರು ಮಳೆಗಾಲ** – ಜೂನ್‌ನಿಂದ – ಸೆಪ್ಟೆಂಬರ್‌ವರೆಗೆ
3) **ಮಾನ್ಸೂನ್ ಮಾರುತಗಳ ನಿರ್ಗಮನಕಾಲ ಅಥವಾ ಹಿಂಗಾರು ಮಳೆಗಾಲ** – ಅಕ್ಟೋಬರ್‌ನಿಂದ – ನವಂಬರ್‌ವರೆಗೆ
4) **ಚಳಿಗಾಲ** – ಡಿಸೆಂಬರ್‌ನಿಂದ – ಫೆಬ್ರವರಿವರೆಗೆ.

**ಬೇಸಿಗೆ ಕಾಲ :** ಭಾರತದಲ್ಲಿ ಬೇಸಿಗೆ ಕಾಲವು ಮಾರ್ಚ್ ತಿಂಗಳ ಮೊದಲವಾರದಲ್ಲಿ ಪ್ರಾರಂಭವಾಗಿ ಮೇ ತಿಂಗಳ ಕೊನೆಯವರೆಗೂ ಮುಂದುವರೆಯುತ್ತದೆ. ಈ ಅವಧಿಯಲ್ಲಿ ಸೂರ್ಯನ ಲಂಬ ಕಿರಣಗಳು ಉತ್ತರಾರ್ಧಗೋಳದ ಮೇಲೆ ಬೀಳುವುದರಿಂದ ಭಾರತದಲ್ಲಿ ಉಷ್ಣಾಂಶ ಅಧಿಕವಾಗಿರುತ್ತದೆ. ದೀರ್ಘ ಹಗಲು ಮತ್ತು ಸಮುದ್ರಕ್ಕೆ ದೂರವಾಗಿರುವ ಉತ್ತರ ಭಾರತವು ಹೆಚ್ಚು ಉಷ್ಣಾಂಶದಿಂದ ಕೂಡಿರುತ್ತದೆ. ರಾಜಸ್ತಾನದ ಗಂಗಾನಗರವು $52^0$ ಸೆ.ಗಳಷ್ಟು ಉಷ್ಣಾಂಶವನ್ನು ದಾಖಲಿಸಿದ್ದು ದೇಶದಲ್ಲಿಯೇ ಅತಿ ಹೆಚ್ಚು ಉಷ್ಣಾಂಶವನ್ನು ದಾಖಲಿಸಿರುವ ಪ್ರದೇಶವಾಗಿದೆ. ದಕ್ಷಿಣ ಭಾರತವು

© KTBS NOT TO BE REPUBLISHED

ಮೂರು ಕಡೆಗಳಲ್ಲಿ ಸಾಗರಗಳಿಂದ ಆವೃತ್ತವಾಗಿದ್ದು ಇದರ ಉಷ್ಣಾಂಶದಲ್ಲಿ ಇಳಿಕೆ ಕಂಡು ಬರುತ್ತದೆ. ಅದು ಕೇವಲ $32^0$ ಸೆ.ದಿಂದ $35^0$ ಸೆ.ಗಳಷ್ಟು ಕಂಡು ಬರುತ್ತದೆ. ಈ ಅವಧಿಯಲ್ಲಿ ಉತ್ತರ ಭಾರತದ ಪರ್ವತ ಪ್ರದೇಶ ಮತ್ತು ಪರ್ಯಾಯ ಪ್ರಸ್ಥಭೂಮಿಗಳು ಸಾಕಷ್ಟು ತಂಪಾಗಿರುತ್ತವೆ. ಅಲ್ಲಲ್ಲಿ ಸ್ಥಳೀಯ ಉಷ್ಣಾಂಶ ಮತ್ತು ಪ್ರಚಲನ ಪ್ರವಾಹಗಳಿಂದ ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ ಮಳೆಯಾಗುತ್ತದೆ. ಈ ಮಳೆಯನ್ನು ಪಶ್ಚಿಮ ಬಂಗಾಳದಲ್ಲಿ 'ಕಾಲ ಬೈಸಾಕಿ,' ಉತ್ತರ ಪ್ರದೇಶದಲ್ಲಿ 'ಆಂಡೀಸ್', ಕರ್ನಾಟಕದಲ್ಲಿ 'ಕಾಫಿ ತುಂತುರು' ಹಾಗೂ ಕೇರಳದಲ್ಲಿ 'ಮಾವಿನಹೊಯ್ಲು' ಎಂದು ಕರೆಯುತ್ತಾರೆ. ಬೇಸಿಗೆಯಲ್ಲಿ ದೇಶವು ವಾರ್ಷಿಕ ಮಳೆಯ ಶೇ. 10 ರಷ್ಟನ್ನು ಮಾತ್ರ ಪಡೆಯುತ್ತದೆ.

**ನೈಋತ್ಯ ಮಾನ್ಸೂನ್ ಮಳೆಗಾಲ :** ಭಾರತದಲ್ಲಿ ನೈಋತ್ಯ ಮಾನ್ಸೂನ್ ಎಂದರೆ ಮಳೆಗಾಲವೆಂದರ್ಥ. ಇವುಗಳನ್ನು ಮುಂಗಾರು ಮಳೆಗಾಲದ ಮಾರುತಗಳೆಂದು ಕರೆಯುತ್ತಾರೆ. ಇವು ಜಲಾಂಶಪೂರಿತ ಮಾರುತಗಳಾಗಿದ್ದು ಭಾರತದ ಹೆಚ್ಚು ಭಾಗದಲ್ಲಿ ಮಳೆ ಸುರಿಸುತ್ತವೆ. ಇದು ಜೂನ್‌ನಿಂದ ಸೆಪ್ಟೆಂಬರ್ ವರೆಗೆ ಕಂಡುಬರುವುದು. ಭಾರತದ ಒಟ್ಟು ಮಳೆಯಲ್ಲಿ ಶೇ. 75 ರಷ್ಟು ಈ ಕಾಲದಲ್ಲಿ ಬೀಳುವುದು. ನೈಋತ್ಯ ಮಾನ್ಸೂನ್ ಮಾರುತಗಳು ಭಾರತವನ್ನು ಎರಡು ಕವಲುಗಳಾಗಿ ಪ್ರವೇಶಿಸುತ್ತವೆ. ಅವುಗಳೆಂದರೆ ಅರಬ್ಬಿ ಸಮುದ್ರ ಶಾಖೆ ಹಾಗೂ ಬಂಗಾಳಕೊಲ್ಲಿಯ ಶಾಖೆ. ಅರಬ್ಬಿ ಸಮುದ್ರ ಶಾಖೆಯು ಪಶ್ಚಿಮ ಘಟ್ಟಗಳಿಂದ ತಡೆಯಲ್ಪಟ್ಟು ಘಟ್ಟಗಳ ಪಶ್ಚಿಮ ಭಾಗಕ್ಕೆ ಹೆಚ್ಚು ಮಳೆ ಸುರಿಸುತ್ತವೆ. ಈ ಮಾರುತಗಳು ಪೂರ್ವಕ್ಕೆ ಮುಂದುವರೆದಂತೆ ಮಳೆ ಕಡಿಮೆಯಾಗುತ್ತದೆ. ಪಶ್ಚಿಮ ಘಟ್ಟಗಳ ಪೂರ್ವ ಭಾಗವು ಮಳೆಯ ನೆರಳಿನ ಪ್ರದೇಶವೆನಿಸಿದೆ. ಬಂಗಾಳಕೊಲ್ಲಿಯ ಶಾಖೆಯು ಮಯನ್ಮಾರ್ (ಬರ್ಮಾ) ಬಾಂಗ್ಲಾದೇಶ, ಭಾರತದ ಈಶಾನ್ಯ ಭಾಗ, ಹಿಮಾಲಯದ ತಪ್ಪಲು ಮತ್ತು ಉತ್ತರದ ಮೈದಾನಗಳ ಕಡೆಗೆ ಮಳೆಯನ್ನು ತರುತ್ತದೆ. ಉತ್ತರ ಭಾರತದಲ್ಲಿ ಪೂರ್ವದಿಂದ ಪಶ್ಚಿಮಕ್ಕೆ ಹೋದಂತೆಲ್ಲಾ ಮಳೆ ಕಡಿಮೆಯಾಗುತ್ತದೆ. ತಮಿಳುನಾಡು ಹೊರತುಪಡಿಸಿ ಭಾರತದ ಹೆಚ್ಚು ಭಾಗಕ್ಕೆ ನೈಋತ್ಯ ಮಾನ್ಸೂನ್ ಮಾರುತಗಳು ಮಳೆಯನ್ನು ಸುರಿಸುತ್ತದೆ.

**ಮಾನ್ಸೂನ್ ಮಾರುತಗಳ ನಿರ್ಗಮನಕಾಲ :** ಅಕ್ಟೋಬರ್ ತಿಂಗಳ ಕೊನೆಯ ಭಾಗದ ಒಳಗಾಗಿ ಭಾರತದ ಉಪಖಂಡದಲ್ಲಿ ಮಳೆ ಸುರಿದ ಪರಿಣಾಮವಾಗಿ ಉಷ್ಣಾಂಶವು ಕಡಿಮೆಯಾಗುತ್ತದೆ. ಅಲ್ಲದೆ ಸೂರ್ಯನ ಕಿರಣಗಳು ಕೂಡಾ ಈ ಅವಧಿಯಲ್ಲಿ ದಕ್ಷಿಣಾರ್ಧ ಗೋಳಾರ್ಧದಲ್ಲಿ ಲಂಬವಾಗಿ ಬೀಳುತ್ತವೆ. ಇದರಿಂದ ಉತ್ತರಾರ್ಧಗೋಳದಲ್ಲಿ ಉಷ್ಣಾಂಶವು ಕಡಿಮೆಯಾಗುತ್ತದೆ. ಪರಿಣಾಮವಾಗಿ ಆ ಪ್ರದೇಶವು ಹೆಚ್ಚು ಒತ್ತಡ ಪ್ರದೇಶವಾಗಿ ಪರಿವರ್ತನೆಯಾಗುತ್ತದೆ. ಅದಕ್ಕಾಗಿ ನೈಋತ್ಯ ಮಾನ್ಸೂನ್ ಮಾರುತಗಳು ಅಕ್ಟೋಬರ್‌ನಿಂದ ಹಿಂದೆ ಸರಿಯಲು ಪ್ರಾರಂಭ ಮಾಡುತ್ತವೆ. ನಿಧಾನವಾಗಿ ನವೆಂಬರ್ ತಿಂಗಳ ಅಂತ್ಯದ ವೇಳೆಗೆ ಇವು ಬೀಸುವುದನ್ನು ನಿಲ್ಲಿಸುತ್ತವೆ. ಇದನ್ನೇ ಮಾನ್ಸೂನ್ ಮಾರುತಗಳ 'ನಿರ್ಗಮನ ಕಾಲ' ಅಥವಾ 'ಈಶಾನ್ಯ ಮಾನ್ಸೂನ್ ಮಾರುತಗಳ ಕಾಲ' ಎಂದು ಕರೆಯುವರು. ಈ ಅವಧಿಯಲ್ಲಿ ಭಾರತವು ಶೇ. 13 ರಷ್ಟು ಮಳೆಯನ್ನು ಪಡೆಯುತ್ತದೆ. ಈ ಕಾಲದಲ್ಲಿ ಉಷ್ಣವಲಯದ ಆವರ್ತ ಗಾಳಿಗಳು (ಚಂಡಮಾರುತ) ಬಂಗಾಳಕೊಲ್ಲಿ ಮತ್ತು ಅರಬ್ಬಿ ಸಮುದ್ರಗಳಲ್ಲಿ ನಿರ್ಮಿತಗೊಳ್ಳುತ್ತವೆ. ಈ ಆವರ್ತ ಗಾಳಿಗಳು ಅಧಿಕ ವೇಗ ಹಾಗೂ ಮಳೆಯಿಂದ ಕೂಡಿರುತ್ತವೆ. ಇವು ಜೀವ ಹಾಗೂ ಆಸ್ತಿ ಹಾನಿಯನ್ನು ಉಂಟುಮಾಡುತ್ತವೆ. ಆದರೆ ಒಳನಾಡಿಗೆ ಸಾಕಷ್ಟು ಮಳೆ ತರುತ್ತವೆ.

**ಚಟುವಟಿಕೆ :**


ದಿನಪತ್ರಿಕೆಗಳಲ್ಲಿ ನೀಡುವ ದೇಶದ ಪ್ರಮುಖ ನಗರಗಳಲ್ಲಿಯ ಉಷ್ಣಾಂಶದ ವಿವರಗಳನ್ನು ಸಂಗ್ರಹಿಸಿ, ಉಷ್ಣಾಂಶದಲ್ಲಾಗುವ ವ್ಯತ್ಯಾಸದ ಬಗ್ಗೆ ಶಿಕ್ಷಕರೊಂದಿಗೆ ಚರ್ಚಿಸಿ.

**ಚಳಿಗಾಲ :** ಭಾರತದಲ್ಲಿ ಚಳಿಗಾಲದ ಅವಧಿಯು ಡಿಸೆಂಬರ್‌ನಿಂದ ಆರಂಭವಾಗಿ ಫೆಬ್ರವರಿಯ ಕೊನೆಯವರೆಗೂ ಮುಂದುವರೆಯುವುದು. ಈ ಅವಧಿಯಲ್ಲಿ ಉತ್ತರದ ರಾಜ್ಯಗಳಾದ ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಹಾಗೂ ಉತ್ತರದ

ಮೈದಾನ ಪ್ರದೇಶಗಳಲ್ಲಿ ಅತಿ ಕಡಿಮೆ ಉಷ್ಣಾಂಶವು ಕಂಡು ಬರುತ್ತದೆ. ಕೆಲವು ಕಡೆಗಳಲ್ಲಿ ಉಷ್ಣಾಂಶವು ನೀರು ಹೆಪ್ಪುಗಟ್ಟುವ ಬಿಂದುವಿಗಿಂತಲೂ ಕಡಿಮೆ ಇರುವುದು. ಆದರೆ ದಕ್ಷಿಣ ಭಾರತದಲ್ಲಿ ಉಷ್ಣಾಂಶವು ಸಾಧಾರಣವಾಗಿದ್ದು ಹವಾಮಾನವು ಹಿತಕರವಾಗಿರುತ್ತದೆ. ಭಾರತವು ತನ್ನ ವಾರ್ಷಿಕ ಮಳೆಯ ಶೇ. 2 ರಷ್ಟನ್ನು ಮಾತ್ರ ಈ ಅವಧಿಯಲ್ಲಿ ಪಡೆಯುವುದು. ಆದುದರಿಂದ ಚಳಿಗಾಲವು ಭಾರತದಲ್ಲಿ ಅತಿ ಕಡಿಮೆ ಮಳೆ ಬೀಳುವ ಅವಧಿಯಾಗಿದೆ.

**ಮಳೆಯ ಹಂಚಿಕೆ :**

ಭಾರತದಲ್ಲಿ ಸಾಮಾನ್ಯವಾಗಿ ನೈಋತ್ಯ ಮಾನ್ಸೂನ್ ಮಾರುತಗಳ ಕಾಲದಲ್ಲಿ ಮಳೆಯಾಗುತ್ತದೆ. ಭಾರತವು ವರ್ಷದ ಎಲ್ಲಾ ಅವಧಿಗಳಲ್ಲಿಯೂ ಮಳೆಯನ್ನು ಪಡೆಯುತ್ತದೆ. ದೇಶದ ಸರಾಸರಿ ಮಳೆಯ ಪ್ರಮಾಣ 118 ಸೆಂ.ಮಿ.ಗಳು ಆದರೆ ವಿವಿಧ ಕಾಲದಲ್ಲಿ ಬೇರೆ ಬೇರೆ ಪ್ರದೇಶಗಳಲ್ಲಿ ಮಳೆ ಬೀಳುವುದು. ಅಲ್ಲದೇ ಮಳೆಯ ಪ್ರಮಾಣವು ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ವ್ಯತ್ಯಾಸ ವಾಗುವುದು. ಮಳೆಯ ಹಂಚಿಕೆಯ ಆಧಾರದ ಮೇಲೆ ಭಾರತವನ್ನು ಮೂರು ವಿಭಾಗಗಳನ್ನಾಗಿ ವಿಂಗಡಿಸಬಹುದು.




**1) ಕಡಿಮೆ ಮಳೆಯ ಪ್ರದೇಶ :** ಈ ಪ್ರದೇಶದಲ್ಲಿ ವಾರ್ಷಿಕ ಸುಮಾರು 50 ಸೆಂ.ಮೀ ಗಳಿಗಿಂತ ಕಡಿಮೆ ಮಳೆಬೀಳುತ್ತದೆ. ರಾಜಸ್ತಾನದ ಥಾರ್ ಮರುಭೂಮಿ ಹಾಗೂ ಅದಕ್ಕೆ ಹೊಂದಿಕೊಂಡಂತಿರುವ ಪಂಜಾಬ್, ಹರಿಯಾಣ, ಗುಜರಾತಿನ ಕಛ್ ಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರ, ಮಹಾರಾಷ್ಟ್ರದ ಪೂರ್ವಭಾಗ, ಕರ್ನಾಟಕದ ಒಳನಾಡು ಕಡಿಮೆ ಮಳೆ ಬೀಳುವ ವಲಯವಾಗಿದೆ. ರಾಜಸ್ಥಾನದ ಜೈಸಲ್ಮೇರ್ ಜಿಲ್ಲೆಯ 'ರೂಯ್ಲಿ' (Ruyli)ಯು ವಾರ್ಷಿಕ ಸರಾಸರಿ ಮಳೆಯು 8.3 ಸೆಂ.ಮೀ. ಗಳಷ್ಟಾಗಿದೆ. ಇದು ಭಾರತದಲ್ಲಿ ಅತಿ ಕಡಿಮೆ ಮಳೆ ಪಡೆಯುವ ಪ್ರದೇಶವಾಗಿದೆ.

**2) ಸಾಧಾರಣ ಮಳೆ ಪಡೆಯುವ ಪ್ರದೇಶ :** ಇಲ್ಲಿ ವಾರ್ಷಿಕ ಸುಮಾರು 50 ರಿಂದ 250 ಸೆಂ.ಮೀ ಮಳೆ ಬೀಳುತ್ತದೆ. ಈ ಭಾಗಗಳನ್ನು ಅತಿ ಕಡಿಮೆ ಹಾಗೂ ಅತಿ ಹೆಚ್ಚು ಮಳೆಯ ಪ್ರದೇಶಗಳನ್ನು ಬಿಟ್ಟು ಭಾರತದ ಉಳಿದೆಲ್ಲಾ ಭಾಗಗಳನ್ನು ಒಳಗೊಂಡಿರುವುದು.

**3) ಅಧಿಕ ಮಳೆಯ ಪ್ರದೇಶ :** ವಾರ್ಷಿಕ ಸುಮಾರು 250 ಸೆಂ.ಮೀ.ಗಳಿಗಿಂತ ಹೆಚ್ಚು ಮಳೆ ಬೀಳುವ ಭಾಗಗಳನ್ನು ಅಧಿಕ ಮಳೆ ಬೀಳುವ ಪ್ರದೇಶಗಳೆಂದು ಗುರುತಿಸುತ್ತೇವೆ. ಪಶ್ಚಿಮ ಘಟ್ಟಗಳ ಪಶ್ಚಿಮಭಾಗ, ಅಸ್ಸಾಂ ಹಾಗೂ ಇತರ ಪೂರ್ವ ರಾಜ್ಯಗಳು ಹಾಗೂ ಪಶ್ಚಿಮ ಬಂಗಾಳ ಈ ವಲಯದಲ್ಲಿ ಸೇರುತ್ತವೆ. ಮೇಘಾಲಯದ 'ಮಾಸಿನ್‌ರಾಮ್' ದೇಶದಲ್ಲಿಯೇ ಅತ್ಯಧಿಕ ಮಳೆ ಪಡೆಯುವುದು. ಇದು

©KTBS NOT TO BE REPUBLISHED

ಪ್ರಪಂಚದಲ್ಲಿಯೇ ಅತಿ ಹೆಚ್ಚು ಮಳೆಯನ್ನು ದಾಖಲಿಸಿದೆ.

ದೇಶದ ಆರ್ಥಿಕ ಬೆಳವಣಿಗೆಯ ಮೇಲೆ ವಾಯುಗುಣವು ಹೆಚ್ಚಿನ ಪ್ರಭಾವ ಬೀರುತ್ತದೆ. ಭಾರತದ ಜನತೆಯ ಪ್ರಧಾನ ಉದ್ಯೋಗವು ವ್ಯವಸಾಯವಾಗಿರುವುದರಿಂದ ನೈರುತ್ಯ ಮಾನ್ಸೂನ್ ಮಾರುತಗಳು ಒಂದು ವಿಧದಲ್ಲಿ ದೇಶದ ವ್ಯವಸಾಯವನ್ನು ನಿಯಂತ್ರಿಸುತ್ತವೆ. ಈ ಮಳೆ ವಿಫಲವಾದರೆ ಬರಗಾಲ ಬರುವುದು. ಅತಿ ಹೆಚ್ಚಾದಾಗ ಪ್ರವಾಹ ಉಂಟಾಗಿ ಪ್ರಾಣ ಹಾನಿ ಮತ್ತು ಆಸ್ತಿಗಳಿಗೆ ಹಾನಿ ಉಂಟಾಗುತ್ತದೆ. ಆದ್ದರಿಂದಲೇ ಭಾರತದ ವ್ಯವಸಾಯವನ್ನು "ಮಾನ್ಸೂನ್ ಜೊತೆಯಲ್ಲಿ ಆಡುವ ಜೂಜಾಟ" ಎಂದು ಕರೆಯುತ್ತಾರೆ.

> **ಚಟುವಟಿಕೆ :**
>
> ಈ ವರ್ಷ ನಿಮ್ಮ ತಾಲ್ಲೂಕಿನಲ್ಲಿ ಮಳೆಗಾಲದಲ್ಲಿ ಆದ ಮಳೆಯ ಪ್ರಮಾಣವನ್ನು ತಿಳಿಯಿರಿ.
>
> ನಿಮ್ಮ ತಾಲ್ಲೂಕಿನಲ್ಲಿ ಈ ವರ್ಷ ಇದ್ದಂತಹ ವಾಯುಗುಣದ ಲಕ್ಷಣಗಳನ್ನು ಸ್ನೇಹಿತರೊಂದಿಗೆ ಚರ್ಚಿಸಿ.

## ಅಭ್ಯಾಸಗಳು

**I. ಬಿಟ್ಟ ಸ್ಥಳಗಳನ್ನು ಸೂಕ್ತವಾದ ಪದಗಳಿಂದ ಭರ್ತಿ ಮಾಡಿರಿ.**

1) ದೇಶದಲ್ಲಿಯೇ ಅತಿ ಹೆಚ್ಚು ಉಷ್ಣಾಂಶ ಹೊಂದಿದ ಸ್ಥಳ __________ ಆಗಿದೆ.
2) ಅತಿ ಹೆಚ್ಚು ಮಳೆ ಬೀಳುವ ಋತುಮಾನ __________ ಆಗಿದೆ.
3) ಭಾರತದಲ್ಲಿ ಅತಿ ಕಡಿಮೆ ಮಳೆ ಬೀಳುವ ಪ್ರದೇಶ __________ .
4) ಭಾರತದಲ್ಲಿಯೇ ಅತಿ ಹೆಚ್ಚು ಮಳೆಯಾಗುವ ಸ್ಥಳ__________ .
5) ಭಾರತದ ವ್ಯವಸಾಯವನ್ನು __________ ಮಳೆಯ ಜೊತೆಯಲ್ಲಿ ಆಡುವ ಜೂಜಾಟ ಎಂದು ಕರೆಯುತ್ತಾರೆ.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಗಳನ್ನು ಬರೆಯಿರಿ.**

1) ಭಾರತವು ಯಾವ ಬಗೆಯ ವಾಯುಗುಣವನ್ನು ಹೊಂದಿದೆ?
2) ಮಾನ್ಸೂನ್ ಮಾರುತ ಎಂದರೇನು?
3) ಯಾವ ಋತುವನ್ನು ಸಾಮಾನ್ಯವಾಗಿ ಮಳೆಗಾಲವೆಂದು ಕರೆಯುವರು?
4) ಭಾರತದ ವಾಯುಗುಣದ ಮೇಲೆ ಪ್ರಭಾವ ಬೀರುವ ಅಂಶಗಳಾವುವು?
5) ಭಾರತದ ವ್ಯವಸಾಯವು 'ಮಾನ್ಸೂನ್ ಮಾರುತಗಳೊಡನೆ ಆಡುವ ಜೂಜಾಟವಾಗಿದೆ' ಚರ್ಚಿಸಿರಿ.

**III. ಚಟುವಟಿಕೆ :**

1) ಭಾರತದ ನಕ್ಷೆ ಬರೆದು ಮಳೆ ಹಂಚಿಕೆಯನ್ನು ಗುರುತಿಸಿ.

**IV. ಯೋಜನೆ :**

1) ನೀವು ವಾಸವಾಗಿರುವ ಪ್ರದೇಶದಲ್ಲಿ ಋತುಮಾನಗಳಲ್ಲಾಗುವ ಬದಲಾವಣೆ ಬಗ್ಗೆ ನಿಮ್ಮ ಬೋಧಕರಿಂದ ತಿಳಿದು ಯೋಜನಾಕಾರ್ಯ ಕೈಗೊಳ್ಳಿ.

NOT TO BE REPUBLISHED @KTBS

ಅಧ್ಯಾಯ–12

# ಭಾರತದ ಮಣ್ಣುಗಳು

T4P4P3

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಭಾರತದಲ್ಲಿನ ಮಣ್ಣಿನ ವಿಧಗಳು ಹಾಗೂ ಹಂಚಿಕೆ.
- ಮಣ್ಣಿನ ಸವೆತ ಹಾಗೂ ಸವೆತಕ್ಕೆ ಕಾರಣಗಳು.
- ಮಣ್ಣಿನ ಸವೆತದ ಪರಿಣಾಮಗಳು.
- ಮಣ್ಣಿನ ಸಂರಕ್ಷಣೆ ಮತ್ತು ನಿರ್ವಹಣೆ.


ಮಣ್ಣು ನೈಸರ್ಗಿಕ ಸಂಪನ್ಮೂಲಗಳಲ್ಲಿ ಒಂದಾಗಿದೆ. ಭಾರತವು ವಿವಿಧ ಬಗೆಯ ಮಣ್ಣುಗಳನ್ನು ಒಳಗೊಂಡಿದೆ. ಇದಕ್ಕೆ ಮುಖ್ಯ ಕಾರಣಗಳೆಂದರೆ ಅವುಗಳು ಉತ್ಪತ್ತಿಯಾಗಿರುವ ಮೂಲ ಶಿಲೆಗಳು ಮತ್ತು ವಾಯುಗುಣಗಳ ವ್ಯತ್ಯಾಸವೇ ಆಗಿದೆ. ಕೆಲವು ಮಣ್ಣುಗಳು ವಿವಿಧ ಕರ್ತೃಗಳಿಂದ ಸಾಗಿಸಲ್ಪಟ್ಟು ಸಂಚಯಿತಗೊಂಡಿವೆ. ಮಣ್ಣು ಸಸ್ಯ ಮತ್ತು ಪ್ರಾಣಿಗಳ **'ಕೊಳೆತ ಜೈವಿಕಾಂಶ'**ವನ್ನು ಒಳಗೊಂಡಿದೆ. ಭಾರತದಲ್ಲಿ ಕಂಡು ಬರುವ ಮಣ್ಣನ್ನು ಆರು ಪ್ರಮುಖ ವಿಧಗಳಾಗಿ ವಿಂಗಡಿಸಲಾಗಿದೆ. ಅವುಗಳೆಂದರೆ – 1) ಮೆಕ್ಕಲು ಮಣ್ಣು 2) ಕಪ್ಪು ಮಣ್ಣು 3) ಕೆಂಪು ಮಣ್ಣು 4) ಜಂಬಿಟ್ಟಿಗೆ ಮಣ್ಣು 5) ಮರುಭೂಮಿ ಮಣ್ಣು ಮತ್ತು 6) ಪರ್ವತ ಮಣ್ಣು.

© KTBS NOT TO BE REPUBLISHED

**1) ಮೆಕ್ಕಲು ಮಣ್ಣು :** ನದಿಗಳು ಪರ್ವತ ಪ್ರದೇಶಗಳಿಂದ ಹೊತ್ತು ತಂದು ಸಂಚಯಿಸಿರುವ ಮಣ್ಣಿಗೆ ಮೆಕ್ಕಲು ಮಣ್ಣು ಎನ್ನುವರು. ಭಾರತದಲ್ಲಿ ಮೆಕ್ಕಲು ಮಣ್ಣು ಇತರ ಎಲ್ಲಾ ಬಗೆಯ ಮಣ್ಣುಗಳಿಗಿಂತ ಹೆಚ್ಚು ವಿಸ್ತಾರವಾದ ಪ್ರದೇಶದಲ್ಲಿ ಹರಡಿರುವುದು. ಈ ಮಣ್ಣು ಸುಮಾರು 7.7 ದಶಲಕ್ಷ ಚ.ಕಿ.ಮೀ ಪ್ರದೇಶದಲ್ಲಿ ಕಂಡುಬರುವುದು. ಇದು ಉತ್ತರ ಪ್ರದೇಶ, ಬಿಹಾರ, ಪಶ್ಚಿಮ ಬಂಗಾಳ, ಒಡಿಶಾ, ಪಂಜಾಬ್, ಹರಿಯಾಣ, ಅಸ್ಸಾಂ ರಾಜ್ಯದ ಬ್ರಹ್ಮಪುತ್ರಾ ಕಣಿವೆಯ ಭಾಗವನ್ನು ಆವರಿಸಿದೆ. ಅಲ್ಲದೆ ನರ್ಮದಾ ಮತ್ತು ತಪತಿ ನದಿಗಳ ಕಣಿವೆಗಳು, ಪರ್ಯಾಯ ಪ್ರಸ್ಥಭೂಮಿಯ ಎರಡು ಕಡೆಗಳಲ್ಲಿರುವ ತೀರ ಪ್ರದೇಶಗಳೂ ಸಹ ಮೆಕ್ಕಲು ಮಣ್ಣಿನಿಂದಲೇ ನಿರ್ಮಿತವಾಗಿವೆ. ಗೋಧಿ, ಭತ್ತ, ಕಬ್ಬು, ಹತ್ತಿ ಮತ್ತು ಸೆಣಬು ಈ ಪ್ರದೇಶಗಳಲ್ಲಿ ಬೆಳೆಯುವ ಬೆಳೆಗಳಾಗಿವೆ.

**2) ಕಪ್ಪು ಮಣ್ಣು :** ಕಪ್ಪು ಮಣ್ಣನ್ನು 'ರೇಗೂರ್ ಮಣ್ಣು' ಎಂತಲೂ ಕರೆಯುತ್ತಾರೆ. ಈ ಮಣ್ಣು ಹತ್ತಿ ಬೆಳೆಗೆ ಬಹು ಸೂಕ್ತವಾಗಿರುವುದರಿಂದ ಕಪ್ಪುಹತ್ತಿ ಬೆಳೆಯುವ ಮಣ್ಣು ಎಂತಲೂ ಕರೆಯವರು. ಇದು ಸುಮಾರು 5.46 ಲಕ್ಷ ಚ.ಕಿ.ಮೀ ಪ್ರದೇಶದಲ್ಲಿ ಕಂಡುಬರುತ್ತದೆ. ಕಪ್ಪು ಮಣ್ಣಿನ ಪ್ರದೇಶವನ್ನು ಡೆಕ್ಕನ್ ಟ್ರಾಪ್ ಎಂದು ಸಹ ಕರೆಯುತ್ತಾರೆ. ಈ ಮಣ್ಣು ಅಗ್ನಿ ಶಿಲೆಗಳ ಶಿಥಿಲೀಕರಣದಿಂದ ಉತ್ಪತ್ತಿಯಾಗಿದೆ. ಇದರಲ್ಲಿ ಜೇಡಿ ಮಣ್ಣಿನ ಕಣಗಳು ಹೆಚ್ಚಾಗಿ ಕಂಡು ಬರುತ್ತವೆ. ಈ ಮಣ್ಣು ಫಲವತ್ತಾಗಿದ್ದು ತೇವಾಂಶವನ್ನು ಹಿಡಿದಿಟ್ಟುಕೊಳ್ಳಲು ಸಮರ್ಥವಾಗಿದೆ. ಇದು ಮಹಾರಾಷ್ಟ್ರ, ಗುಜರಾತ್,ಮಧ್ಯಪ್ರದೇಶ, ಆಂಧ್ರ ಪ್ರದೇಶದ ಪಶ್ಚಿಮ ಭಾಗ ಮತ್ತು ಉತ್ತರ ಕರ್ನಾಟಕದಲ್ಲಿ ಹೆಚ್ಚಾಗಿ

ಕಂಡು ಬರುತ್ತದೆ. ಈ ಮಣ್ಣು ಕಬ್ಬಿಣ ಸುಣ್ಣ ಹಾಗೂ ಮೆಗ್ನೀಸಿಯಮ್ ಕಾರ್ಬೋನೇಟ್‌ಗಳನ್ನು ಅಧಿಕ ಪ್ರಮಾಣದಲ್ಲಿ ಒಳಗೊಂಡಿದೆ. ಇದು ಒಣಬೇಸಾಯಕ್ಕೆ ಸೂಕ್ತವಾಗಿದ್ದು ಹತ್ತಿ, ಜೋಳ, ಗೋಧಿ, ಈರುಳ್ಳಿ, ಮೆಣಸಿನಕಾಯಿ, ಹೊಗೆಸೊಪ್ಪು, ಎಣ್ಣೆ ಕಾಳು, ನಿಂಬೆ, ದ್ರಾಕ್ಷಿ ಈ ಮಣ್ಣಿನಲ್ಲಿ ಬೆಳೆಯುವ ಪ್ರಮುಖ ಬೆಳೆಗಳಾಗಿವೆ.




3) **ಕೆಂಪು ಮಣ್ಣು :** ಕೆಂಪು ಮಣ್ಣು ಪರ್ಯಾಯ ಪ್ರಸ್ಥಭೂಮಿಯಲ್ಲಿ ಹೆಚ್ಚು ವಿಸ್ತಾರವಾಗಿ ಹರಡಿರುವ ಮಣ್ಣಿನ ಪ್ರಕಾರವಾಗಿದೆ. ಇದು ಸುಮಾರು 5.18 ಲಕ್ಷ ಚ.ಕಿ.ಮೀ ಭೂ ಪ್ರದೇಶದಲ್ಲಿ ಕಂಡುಬರುವುದು. ಇದು ದಕ್ಷಿಣದಲ್ಲಿ ಕನ್ಯಾಕುಮಾರಿಯಿಂದ ಉತ್ತರದಲ್ಲಿ ಮಧ್ಯಪ್ರದೇಶದ ಝೂನ್ಸಿಯವರೆಗೆ ಹಬ್ಬಿದೆ. ಪಶ್ಚಿಮದಲ್ಲಿ ಗುಜರಾತಿನ ಕಛ್ ಪ್ರದೇಶದಿಂದ ಪೂರ್ವದಲ್ಲಿ ಜಾರ್ಖಂಡ್‌ನ ರಾಜಮಹಲ್ ಬೆಟ್ಟಗಳವರೆಗೂ ವ್ಯಾಪಿಸಿದೆ. ಕೆಂಪು ಮಣ್ಣಿನಲ್ಲಿ ಬೆಳೆಯಲಾಗುತ್ತಿರುವ ಪ್ರಮುಖ ಬೆಳೆಗಳೆಂದರೆ ರಾಗಿ, ಹೊಗೆಸೊಪ್ಪು ಮತ್ತು ಎಣ್ಣೆಕಾಳುಗಳು ಹಾಗೂ ನೀರಾವರಿಯ ಸೌಲಭ್ಯವಿರುವ ಪ್ರದೇಶಗಳಲ್ಲಿ ಭತ್ತ, ಕಬ್ಬು, ಹತ್ತಿ ಮುಂತಾದವುಗಳನ್ನು ಬೆಳೆಯುವರು.

**4) ಜಂಬಿಟ್ಟಿಗೆ (ಲ್ಯಾಟ್‌ರೈಟ್) ಮಣ್ಣು :** ಜಂಬಿಟ್ಟಿಗೆ ಮಣ್ಣು ಸಾಮಾನ್ಯವಾಗಿ 200 ಸೆಂ.ಮೀಗಳಿಗಿಂತ ಹೆಚ್ಚು ಮಳೆ ಬೀಳುವ ಪ್ರದೇಶಗಳಲ್ಲಿ ನಿರ್ಮಿತಗೊಂಡಿದೆ. ಅಧಿಕ ಮಳೆಯಿಂದ ಮಣ್ಣಿನಲ್ಲಿರುವ ಲವಣಾಂಶಗಳು ತೊಳೆಸಲ್ಪಟ್ಟು ಕೇವಲ ಕಬ್ಬಿಣದ ಆಕ್ಸೈಡ್ ಮತ್ತು ಅಲ್ಯುಮಿನಿಯಂಗಳು ಮಾತ್ರ ಮೇಲ್ಪದರಿನಲ್ಲಿ ಉಳಿದಿರುವುದು. ಇದರಿಂದಾಗಿ ಈ ಮಣ್ಣು ಕೆಂಪು ಬಣ್ಣವನ್ನು ಹೊಂದಿರುವುದು. ಮಳೆಯ ನೀರು ಲವಣಗಳನ್ನು ಕರಗಿಸಿ ದ್ರಾವಣದ ರೂಪದಲ್ಲಿ ಭೂಮಿಯ ಹೆಚ್ಚು ಆಳದವರೆಗೆ ಸಾಗಿಸಿರುವುದು. ಆದುದರಿಂದ ಮೇಲ್ಪದರದ ಮಣ್ಣಿನಲ್ಲಿ ನೀರಿನಲ್ಲಿ ಕರಗದ ಕಬ್ಬಿಣ ಆಕ್ಸೈಡ್ ಮತ್ತು ಅಲ್ಯೂಮಿನಿಯಂಗಳು ಮಾತ್ರ ಕಂಡು ಬರುತ್ತವೆ. ಜಂಬಿಟ್ಟಿಗೆ ಮಣ್ಣಿನಲ್ಲಿ ಫಲವತ್ತತೆ ಅತಿ ಕಡಿಮೆ ಸಾರಜನಕ ಮತ್ತು ಲವಣಗಳ ಕೊರತೆಯನ್ನು ಈ ಮಣ್ಣಿನಲ್ಲಿ ಕಾಣಬಹುದು. ಇದು ಭಾರತದಲ್ಲಿ ಸುಮಾರು 2.48 ಲಕ್ಷ ಚ.ಕಿ.ಮೀ ಪ್ರದೇಶದಲ್ಲಿ ಕಂಡು ಬರುವುದು. ಪಶ್ಚಿಮ ಘಟ್ಟಗಳು, ವಿಂಧ್ಯ, ಸಾತ್ಪುರ ಮತ್ತು ರಾಜಮಹಲ್ ಬೆಟ್ಟಗಳು ಹಾಗೂ ಪೂರ್ವಾಚಲ ಪ್ರದೇಶಗಳಲ್ಲಿ ಈ ಮಣ್ಣು ವ್ಯಾಪಕವಾಗಿ ಹರಡಿದೆ. ಇದು ಕಾಫಿ ಟೀ ಮುಂತಾದ ತೋಟಗಾರಿಕೆ ಬೆಳೆಗಳಿಗೆ ಬಹು ಉಪಯುಕ್ತವಾಗಿದೆ.

@KTBS NOT TO BE REPUBLISHED

**5) ಮರುಭೂಮಿ ಮಣ್ಣು :** ಅತಿ ಕಡಿಮೆ ಮಳೆ ಮತ್ತು ಅಧಿಕ ಉಷ್ಣಾಂಶದ ಪ್ರದೇಶದಲ್ಲಿ ಮರಳು ಮಣ್ಣು ನಿರ್ಮಾಣಗೊಳ್ಳುತ್ತದೆ. ಈ ಮಣ್ಣು ಕೆಂಪು ಮತ್ತು ಕಂದು ಬಣ್ಣವನ್ನು ಹೊಂದಿದೆ. ಕಣಗಳ ನಡುವೆ ಅಧಿಕ ರಂಧ್ರತೆ ಇರುವುದರಿಂದ ನೀರು ನಿಲ್ಲದೆ ತೀವ್ರವಾಗಿ ಬಸಿದು ಹೋಗುತ್ತದೆ ಮತ್ತು ಬೇಗ ಆರ್ದ್ರತೆ ಕಡಿಮೆ ಆಗುತ್ತದೆ. ಭಾರತದಲ್ಲಿ ಈ ಮಣ್ಣು ಸುಮಾರು 1.4 ಲಕ್ಷ ಚ.ಕಿ.ಮೀ ಪ್ರದೇಶದಲ್ಲಿ ಹರಡಲ್ಪಟ್ಟಿದೆ. ಸಜ್ಜೆ, ಖರ್ಜೂರ ಇತ್ಯಾದಿಗಳನ್ನು ಬೆಳೆಯಬಹುದು. ಭಾರತದ ವಾಯುವ್ಯ ಭಾಗದ ರಾಜಸ್ತಾನ, ಪಂಜಾಬ್ ಮತ್ತು ಹರಿಯಾಣ ರಾಜ್ಯಗಳಲ್ಲಿ ಹಾಗೂ ಪಶ್ಚಿಮದ ಗುಜರಾತಿನ ಕಛ್ ಪ್ರದೇಶ ಹಾಗೂ ಅರಾವಳಿ ಶ್ರೇಣಿಯ ಪಶ್ಚಿಮ ಭಾಗದಲ್ಲಿ ಹಂಚಿಕೆಯಾಗಿದೆ.

**6) ಪರ್ವತ ಮಣ್ಣು :** ಕೊಳೆತ ಜೈವಿಕಾಂಶಗಳನ್ನು ಅಧಿಕ ಪ್ರಮಾಣದಲ್ಲಿ ಈ ಮಣ್ಣು ಹೊಂದಿದೆ. ಪರ್ವತಗಳಲ್ಲಿ ನಿರ್ಮಾಣಗೊಂಡ ಈ ಮಣ್ಣು ಇಳಿಜಾರಿನ ಮೈದಾನಕ್ಕೆ ಇಳಿದು ಬರುತ್ತದೆ. ಇದು ಸಾರಜನಕ ಮತ್ತು ಸಾವಯವ ಅವಶೇಷಗಳನ್ನು ಹೆಚ್ಚಾಗಿ ಒಳಗೊಂಡಿರುತ್ತದೆ. ಕಾಫಿ, ಚಹಾ, ಸಾಂಬಾರ ಪದಾರ್ಥಗಳು ಮತ್ತು ಹಣ್ಣುಗಳಿಗೆ ಸೂಕ್ತವಾಗಿದೆ. ಹಿಮಾಲಯದ ಪಾದ ಬೆಟ್ಟಗಳು, ಜಮ್ಮು ಮತ್ತು ಕಾಶ್ಮೀರ,ಹಿಮಾಚಲ ಪ್ರದೇಶ, ಉತ್ತರಾಖಂಡ, ಬಿಹಾರ, ಪಶ್ಚಿಮ ಬಂಗಾಳ ಮತ್ತು ಪರ್ವತ ಪ್ರದೇಶಗಳಲ್ಲಿ ಈ ಮಣ್ಣು ಹಂಚಲ್ಪಟ್ಟಿದೆ.

**ಮಣ್ಣಿನ ಸವೆತ :**

ಭೂ ಮೇಲ್ಮೈಯಲ್ಲಿ ಕಂಡು ಬರುವ ಸಡಿಲವಾದ ಪದರವು ವಿವಿಧ ಪ್ರಾಕೃತಿಕ ಶಕ್ತಿಗಳಿಂದ ಸ್ಥಳಾಂತರ ಹೊಂದುವ ಕ್ರಿಯೆಯನ್ನೇ "ಮಣ್ಣಿನ ಸವೆತ" ಅಥವಾ "ಭೂ ಸವೆತ" ಎಂದು ಕರೆಯುತ್ತಾರೆ. ಹರಿಯುವ ನೀರು, ಗಾಳಿ ಸಮುದ್ರದ ಅಲೆ ಮುಂತಾದವುಗಳು ಭೂಸವೆತದ ಮುಖ್ಯ ಕರ್ತೃಗಳಾಗಿವೆ.

**ಮಣ್ಣಿನ ಸವೆತಕ್ಕೆ ಕಾರಣಗಳು :** ಮಣ್ಣಿನ ಸವೆತವು ದೇಶದ ಮುಖ್ಯ ಸಮಸ್ಯೆಗಳಲ್ಲಿ ಒಂದಾಗಿದೆ. ಇದು ಇತ್ತೀಚಿನ ವರ್ಷಗಳಲ್ಲಿ ಅಧಿಕವಾಗಿದೆ. ಇದಕ್ಕೆ ಮುಖ್ಯ ಕಾರಣಗಳೆಂದರೆ 1) ಅರಣ್ಯಗಳ ನಾಶ 2) ಹೆಚ್ಚು ಮೇಯಿಸುವುದು 3) ಅವೈಜ್ಞಾನಿಕ ಬೇಸಾಯ 4) ಅಧಿಕ ನೀರಾವರಿ ಬಳಕೆ ಮೊದಲಾದವು. ಉದಾ: ಇಟ್ಟಿಗೆ, ಹೆಂಚು, ಮಡಿಕೆ ತಯಾರಿಕೆ ಮುಂತಾದವುಗಳಿಂದ ಮೇಲ್ಮಣ್ಣು ನಾಶವಾಗಿ ಅನುಪಯುಕ್ತವಾದ ಮಣ್ಣು ಉಳಿದುಕೊಳ್ಳುವುದು.

**ಮಣ್ಣಿನ ಸವೆತದ ಪರಿಣಾಮಗಳು:** ಮಣ್ಣಿನ ಸವೆತವು ಅನೇಕ ಸಮಸ್ಯೆಗಳಿಗೆ ಕಾರಣವಾಗುವುದು. ಅವುಗಳಲ್ಲಿ ಮುಖ್ಯವಾದವುಗಳೆಂದರೆ,

1) ಮಣ್ಣಿನ ಸವೆತದಿಂದ ನದಿಗಳಲ್ಲಿ ಹೂಳುತುಂಬಿ ಪ್ರವಾಹ ಉಂಟಾಗುತ್ತದೆ. 2) ನದಿಯ ಪಾತ್ರದಲ್ಲಿ ಹೂಳು ತುಂಬುವುದರಿಂದ ನದಿಗಳು ತಮ್ಮ ಪಾತ್ರವನ್ನು ಬದಲಾಯಿಸುತ್ತವೆ. 3) ಜಲಾಶಯ ಮತ್ತು ಕೆರೆಗಳಲ್ಲಿ ಹೂಳು ತುಂಬುವುದರಿಂದ ನೀರನ್ನು ಸಂಗ್ರಹಿಸುವ ಅವುಗಳ ಸಾಮರ್ಥ್ಯವು ಕಡಿಮೆಯಾಗುವುದು 4) ಭೂಸವೆತದಿಂದ ಭೂಮಿಯಲ್ಲಿ ಇಂಗುವ ನೀರಿನ ಪ್ರಮಾಣ ಕಡಿಮೆಯಾಗುವುದು. ಇದರಿಂದ ಸ್ವಾಭಾವಿಕ ಚಿಲುಮೆಗಳು ಬತ್ತಿ ಹೋಗುತ್ತವೆ. ಭಾರತವು ವ್ಯವಸಾಯ ಪ್ರಧಾನವಾದ ರಾಷ್ಟ್ರ. ಇದರಿಂದ ಭೂಸವೆತವು ವ್ಯವಸಾಯದ ಉತ್ಪಾದನೆಯ ಮೇಲೆ ಹೆಚ್ಚು ಪರಿಣಾಮವನ್ನು ಬೀರುವುದು. ಆದುದರಿಂದ ಫಲವತ್ತತೆ ಹಾಗೂ ಉತ್ಪಾದನೆಯನ್ನು ಕಾಪಾಡಲು ಮಣ್ಣಿನ ಸವೆತವನ್ನು ತಡೆಗಟ್ಟುವುದು ಅಗತ್ಯವಾಗಿದೆ.

@KTBS NOT TO BE REPUBLISHED

## ಮಣ್ಣಿನ ಸಂರಕ್ಷಣೆ ಮತ್ತು ನಿರ್ವಹಣೆ :

ಮಣ್ಣಿನ ಸವೆತವನ್ನು ತಡೆಗಟ್ಟುವುದು ಹಾಗೂ ಅದರ ಫಲವತ್ತತೆಯನ್ನು ಕಾಪಾಡುವುದೇ "ಮಣ್ಣಿನ ಸಂರಕ್ಷಣೆ". ಜೊತೆಗೆ ಫಲವತ್ತತೆ ಕಡಿಮೆಯಾಗದಂತೆ ಸುಸ್ಥಿರ ರೀತಿಯಲ್ಲಿ ಮಣ್ಣನ್ನು ಬಳಕೆಮಾಡಿ ನಿರಂತರವಾಗಿ ಬೆಳೆಗಳ ಉತ್ಪಾದನೆಯನ್ನು ಪಡೆಯುವುದೇ ಮಣ್ಣಿನ ನಿರ್ವಹಣೆಯಾಗಿದೆ. ದೇಶದ ಕೃಷಿಸಂಬಂಧ ಯೋಜನೆಗಳಲ್ಲಿ ಇದಕ್ಕೆ ಪ್ರಾಮುಖ್ಯತೆಯನ್ನು ನೀಡಲಾಗಿದೆ. ಮಣ್ಣಿನ ಸವೆತವನ್ನು ತಡೆಗಟ್ಟುವ ಹಲವಾರು ವಿಧಾನಗಳಿವೆ. ಅವುಗಳಲ್ಲಿ ಮುಖ್ಯವಾದವುಗಳೆಂದರೆ,

1) ಇಳಿಜಾರಿಗೆ ಅಡ್ಡಲಾಗಿ ಉಳುಮೆ ಮಾಡುವುದು.
2) ಅಡ್ಡ ಬದುಗಳನ್ನು ನಿರ್ಮಿಸುವುದು.
3) ಹಂತ ಹಂತವಾಗಿ ವ್ಯವಸಾಯ ಕ್ಷೇತ್ರಗಳ ನಿರ್ಮಾಣ.
4) ಅರಣ್ಯ ನಾಶವನ್ನು ತಡೆಗಟ್ಟುವುದು ಮತ್ತು ಅರಣ್ಯಗಳ ಬೆಳವಣಿಗೆಯನ್ನು ಪ್ರೋತ್ಸಾಹಿಸುವುದು.
5) ಅತಿಯಾಗಿ ಮೇಯಿಸುವುದನ್ನು ನಿಯಂತ್ರಿಸುವುದು.
6) ನೀರಿನ ಯೋಜಿತ ಬಳಕೆ.
7) ಚೆಕ್ ಡ್ಯಾಮ್‌ಗಳ ನಿರ್ಮಾಣ ಇತ್ಯಾದಿ.

**ನಿಮಗೆ ಇದು ತಿಳಿದಿರಲಿ**

- ಮಣ್ಣು ಒಂದು ಪ್ರಮುಖ ನೈಸರ್ಗಿಕ ಸಂಪನ್ಮೂಲವಾಗಿದೆ. ಇದು ರಾಷ್ಟ್ರದ ಪ್ರಮುಖ ಸಂಪತ್ತಾಗಿರುತ್ತದೆ.
- ಅತಿ ಸೂಕ್ಷ್ಮ ಕಣಗಳಿಂದ ಕೂಡಿರುವ ಮಣ್ಣನ್ನು ಜೇಡಿ *(clay)* ಮಣ್ಣು ಎಂದು ಕರೆಯುವರು
- ಮರಳು ಮಣ್ಣು ಅತಿ ದಪ್ಪವಾದ ಕಣಗಳನ್ನು ಒಳಗೊಂಡಿರುವುದು.
- ಮಣ್ಣುಗಳ ಉತ್ಪತ್ತಿ, ಕಣರಚನೆ, ರಾಸಾಯನ ಸಂಯೋಜನೆ ಹಾಗೂ ಅದರ ಬದಲಾವಣೆ ಮುಂತಾದವುಗಳ ಅಧ್ಯಯನವನ್ನು "ಮಣ್ಣಿನ ಶಾಸ್ತ್ರ" *(Pedology)* ಎಂದು ಕರೆಯುವರು.

NOT TO BE REPUBLISHED @KTBS

### ಅಭ್ಯಾಸಗಳು

**I. ಬಿಟ್ಟ ಸ್ಥಳಗಳನ್ನು ಸೂಕ್ತವಾದ ಪದಗಳಿಂದ ಭರ್ತಿ ಮಾಡಿ.**

1) ನದಿಗಳು ಪರ್ವತ ಪ್ರದೇಶಗಳಿಂದ ತಂದು ಸಂಚಯಿಸಿರುವ ಮಣ್ಣಿಗೆ ___________ ಎಂದು ಕರೆಯುವರು.
2) ಕಪ್ಪು ಮಣ್ಣಿನ ಪ್ರದೇಶವನ್ನು ___________ ಎಂದು ಸಹ ಕರೆಯುವರು.
3) ರಾಜಸ್ಥಾನದಲ್ಲಿ ___________ ಮಣ್ಣು ಹೆಚ್ಚಾಗಿ ಕಂಡುಬರುವುದು.
4) ಜೋಳ ಬೆಳೆಯಲು ___________ ಮಣ್ಣು ಸೂಕ್ತವಾಗಿದೆ.
5) ರಾಗಿ ಮತ್ತು ಎಣ್ಣೆಕಾಳು ಬೆಳೆಯಲು ___________ ಮಣ್ಣು ಸೂಕ್ತವಾಗಿದೆ.

**II. ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಗಳನ್ನು ಬರೆಯಿರಿ.**

1) ಕಪ್ಪು ಮಣ್ಣು ಯಾವ ಬೆಳೆಗೆ ಹೆಚ್ಚು ಉಪಯುಕ್ತವಾಗಿದೆ?
2) ಭಾರತದಲ್ಲಿ ಕಂಡು ಬರುವ ಮಣ್ಣಿನ ಮುಖ್ಯ ಪ್ರಕಾರಗಳಾವುವು?
3) ಉತ್ತರ ಮೈದಾನ ಪ್ರದೇಶದಲ್ಲಿ ಯಾವ ಮಣ್ಣು ಕಂಡು ಬರುತ್ತದೆ?
4) ಮಣ್ಣಿನ ಸಂರಕ್ಷಣೆ ಎಂದರೇನು? ಅದರ ವಿಧಾನಗಳನ್ನು ಪಟ್ಟಿ ಮಾಡಿರಿ.
5) ಮಣ್ಣಿನ ಸವೆತ ಎಂದರೇನು? ಅದರಿಂದ ಉಂಟಾಗುವ ಪರಿಣಾಮಗಳನ್ನು ಸಂಗ್ರಹಿಸಿರಿ.
6) ಹಿಮಾಲಯ ಪರ್ವತಗಳಲ್ಲಿ ಯಾವ ಬಗೆಯ ಮಣ್ಣು ಕಂಡು ಬರುವವು?

**III. 'ಅ' ಪಟ್ಟಿಯಲ್ಲಿನ ಮಣ್ಣುಗಳನ್ನು 'ಬ' ಪಟ್ಟಿಯಲ್ಲಿನ ಅಂಶಗಳೊಂದಿಗೆ ಹೊಂದಿಸಿ ಬರೆಯಿರಿ.**

| ಅ | ಬ |
|---|---|
| 1) ಮೆಕ್ಕಲು ಮಣ್ಣು | ಎ) ರಾಗಿ ಮತ್ತು ಎಣ್ಣೆ ಕಾಳು ಬೆಳೆಯಲು |
| 2) ಕಪ್ಪು ಮಣ್ಣು | ಬಿ) ಪಶ್ಚಿಮ ಘಟ್ಟಗಳ ಮಣ್ಣು |
| 3) ಕೆಂಪು ಮಣ್ಣು | ಸಿ) ಗಂಗಾ ನದಿಯ ಮೈದಾನ |
| 4) ಜಂಬಿಟ್ಟಿಗೆ ಮಣ್ಣು | ಡಿ) ಹತ್ತಿ ಬೆಳೆಯಲು |
| | ಇ) ಕಾಫಿ ಮತ್ತು ಚಹಾ ಬೆಳೆಯಲು. |

**IV. ಚಟುವಟಿಕೆಗಳು :**

1) ನಿಮ್ಮ ತಾಲ್ಲೂಕಿನ ಕೃಷಿ ಸಹಾಯಕ ನಿರ್ದೇಶಕರ ಕಾರ್ಯಾಲಯಕ್ಕೆ ಅಥವಾ ರೈತ ಸಂಪರ್ಕಕೇಂದ್ರಕ್ಕೆ ಭೇಟಿ ನೀಡಿ ವಿವಿಧ ನಮೂನೆಯ ಮಣ್ಣುಗಳನ್ನು ಪಟ್ಟಿಮಾಡಿ ಅವುಗಳ ಉಪಯೋಗ ತಿಳಿಯಿರಿ.
2) ಸಾಕು-ಪ್ರಾಣಿ ಮೇಯಿಸುವುದರಿಂದ ಮಣ್ಣಿನ ಸವೆತ ಆಗುವುದು ಸಾಧ್ಯವಿದೆಯೇ? ಇದರ ಬಗ್ಗೆ ನಿಮ್ಮ ಶಿಕ್ಷಕರೊಂದಿಗೆ ಚರ್ಚಿಸಿ.

**V. ಯೋಜನೆ :**

**1)** ನಿಮ್ಮ ಮನೆಯ ಸುತ್ತ ಮುತ್ತಲಿನ ಅಥವಾ ನಿಮ್ಮ ಹೊಲದ ಸ್ವಲ್ಪ ಮಣ್ಣನ್ನು ತೆಗೆದುಕೊಂಡು ಬೋಧಕರ ಸಹಾಯದಿಂದ ಮಣ್ಣು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಿಸಿ. ಆ ಮಣ್ಣು ಯಾವ ಬೆಳೆಗೆ ಸೂಕ್ತ ಎಂಬುದನ್ನು ತಿಳಿದುಕೊಳ್ಳಿ.

@KTBS NOT TO BE REPUBLISHED

ಅಧ್ಯಾಯ–13

# ಭಾರತದ ಅರಣ್ಯಗಳು

D8X2T8

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಭಾರತದ ಅರಣ್ಯಗಳ ವಿಧಗಳು, ಹಂಚಿಕೆ. • ಅರಣ್ಯಗಳ ಸಂರಕ್ಷಣೆ, ಸಂರಕ್ಷಣಾ ವಿಧಾನಗಳು.
- ವನ್ಯಜೀವಿ ಧಾಮಗಳು, ರಾಷ್ಟ್ರೀಯ ಉದ್ಯಾನವನಗಳು.
- ಜೈವಿಕ ಸಂರಕ್ಷಣಾ ವಲಯಗಳು.

ಒಂದು ಪ್ರದೇಶದಲ್ಲಿ ಪ್ರಕೃತಿದತ್ತವಾಗಿ ಬೆಳೆದಿರುವ ಎಲ್ಲ ಬಗೆಯ ಸಸ್ಯ ಸಮೂಹವನ್ನು ಅರಣ್ಯಗಳು ಅಥವಾ ಸ್ವಾಭಾವಿಕ ಸಸ್ಯವರ್ಗವೆಂದು ಕರೆಯುವರು. ಇದು ಪ್ರಾಕೃತಿಕ ಪರಿಸರದ ಇತರ ಅಂಶಗಳಾದ ಉಷ್ಣಾಂಶ, ಮಳೆ, ಭೂಸ್ವರೂಪ, ಮಣ್ಣುಗಳು ಮುಂತಾದವುಗಳಿಂದ ಹೆಚ್ಚು ಪ್ರಭಾವಿತವಾಗುವುದು. ಭಾರತವು 2009 ರ ಅಂದಾಜಿನಂತೆ 6.9 ಲಕ್ಷ ಚ.ಕಿ.ಮೀ (69.0 ದಶಲಕ್ಷ ಹೆಕ್ಟೇರ್) ಅಂದರೆ ಭೌಗೋಳಿಕ ಕ್ಷೇತ್ರದ ಶೇ. 21.02 ರಷ್ಟು ಭೂಭಾಗವು ಅರಣ್ಯಗಳಿಂದ ಕೂಡಿರುವುದಾಗಿದೆ.

ಭಾರತವು ಬಹುವಿಸ್ತಾರವಾದ ದೇಶವಾಗಿದ್ದು ವಿವಿಧ ಬಗೆಯ ಪ್ರಾಕೃತಿಕ ಪರಿಸರಗಳಿಂದ ಕೂಡಿದ್ದು, ಇದು ಹೊಂದಿರುವ ಪ್ರಾಕೃತಿಕ ಸಸ್ಯವರ್ಗದಲ್ಲಿ ಅನೇಕ ವಿಧಗಳನ್ನು ಕಾಣಬಹುದು. ಇವುಗಳನ್ನು ಆರು ಮುಖ್ಯ ಪ್ರಾಕಾರಗಳಾಗಿ ವಿಂಗಡಿಸಬಹುದಾಗಿದೆ. ಅವುಗಳೆಂದರೆ – 1) ನಿತ್ಯ ಹರಿದ್ವರ್ಣದ ಅರಣ್ಯಗಳು 2) ಎಲೆ ಉದುರಿಸುವ ಮಾನ್ಸೂನ್ ಅರಣ್ಯಗಳು 3) ಉಷ್ಣವಲಯದ ಹುಲ್ಲುಗಾವಲು ಅರಣ್ಯಗಳು 4) ಮ್ಯಾಂಗ್ರೋವ್ ಅರಣ್ಯಗಳು 5) ಮರುಭೂಮಿ ಅರಣ್ಯಗಳು ಮತ್ತು 6) ಹಿಮಾಲಯದ ಅಲ್ಪೈನ್ ಅರಣ್ಯಗಳು.

**1) ನಿತ್ಯ ಹರಿದ್ವರ್ಣದ ಅರಣ್ಯಗಳು :** ಭಾರತದಲ್ಲಿ ನಿತ್ಯಹರಿದ್ವರ್ಣದ ಅರಣ್ಯಗಳನ್ನು 250 ಸೆಂ.ಮೀ.ಗಳಿಗಿಂತ ಹೆಚ್ಚು ಮಳೆ ಪಡೆಯುವ 900 ಮೀ.ಗಳಿಗಿಂತ ಕಡಿಮೆ ಎತ್ತರವನ್ನು ಹೊಂದಿರುವ ಪ್ರದೇಶಗಳಲ್ಲಿ ಕಾಣಬಹುದು. ಈ ಬಗೆಯ ಅರಣ್ಯಗಳು ಪಶ್ಚಿಮ ಘಟ್ಟಗಳು, ಈಶಾನ್ಯ ರಾಜ್ಯಗಳಾದ ಅಸ್ಸಾಂ, ಮೇಘಾಲಯ, ತ್ರಿಪುರಾ, ಮಣಿಪುರ, ನಾಗಾಲ್ಯಾಂಡ್ ಹಾಗೂ ಅಂಡಮಾನ್ ನಿಕೋಬಾರ್ ಮತ್ತು ಲಕ್ಷದ್ವೀಪಗಳಲ್ಲಿ ಕಂಡು ಬರುತ್ತವೆ. ಭಾರತದಲ್ಲಿ ನಿತ್ಯ ಹರಿದ್ವರ್ಣದ ಅರಣ್ಯಗಳು ಸುಮಾರು 2.6 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಹರಡಿವೆ. ಈ ಪ್ರದೇಶದಲ್ಲಿ ಸಸ್ಯವರ್ಗವು ವರ್ಷವೆಲ್ಲಾ ಹಸಿರಾಗಿರುವುದರಿಂದಲೇ ಇವುಗಳನ್ನು **ನಿತ್ಯ ಹರಿದ್ವರ್ಣ** ಅಥವಾ ಸದಾ ಹಸಿರಾಗಿರುವ ಅರಣ್ಯವೆಂದು ಕರೆಯುವರು.


**2) ಎಲೆ ಉದುರಿಸುವ ಮಾನ್ಸೂನ್ ಅರಣ್ಯಗಳು :** ಈ ಪ್ರಕಾರದ ಅರಣ್ಯಗಳು ಭಾರತದಲ್ಲಿ ಅತಿಹೆಚ್ಚು ವಿಸ್ತಾರವಾಗಿ ಹರಡಿವೆ. ಇವುಗಳು 75 ರಿಂದ 250 ಸೆಂ.ಮೀ. ಮಳೆ ಪಡೆಯುವ ಪ್ರದೇಶಗಳಲ್ಲಿ ವ್ಯಾಪಕವಾಗಿ ವಿಸ್ತರಿಸಿವೆ. ಇದು ಭಾರತದ ಶೇ. 65.5 ರಷ್ಟು ಒಟ್ಟು ಅರಣ್ಯದಲ್ಲಿ ಹರಡಿವೆ. ಭಾರತವು ಮಾನ್ಸೂನ್ ವಾಯುಗುಣವನ್ನು ಹೊಂದಿರುವುದರಿಂದ ಈ ಬಗೆಯ ಅರಣ್ಯಗಳು ವ್ಯಾಪಕವಾಗಿ ಹಂಚಿಕೆಯಾಗಿವೆ. ಇವುಗಳು ವರ್ಷದ ನಿರ್ದಿಷ್ಟ ಒಣ ಹವೆಯ ಋತುವಿನಲ್ಲಿ ಎಲೆ ಉದುರಿಸುವುದನ್ನು ರೂಢಿಸಿ ಕೊಂಡಿರುವುದರಿಂದ ಇವುಗಳನ್ನು ಎಲೆಯುದುರಿಸುವ ಮಾನ್ಸೂನ್ ಅರಣ್ಯಗಳೆಂದು ಕರೆಯುವರು.

**3) ಉಷ್ಣವಲಯದ ಹುಲ್ಲುಗಾವಲು ಅರಣ್ಯಗಳು :** ಭಾರತದಲ್ಲಿ 60 ರಿಂದ 75 ಸೆಂ.ಮೀ ಮಳೆ ಪಡೆಯುವ ಪ್ರದೇಶಗಳಲ್ಲಿ ಹುಲ್ಲುಗಾವಲು ಸಸ್ಯವರ್ಗ ಪ್ರಧಾನವಾಗಿ ಕಂಡುಬರುವುದು. ಈ ವಲಯಗಳಲ್ಲಿ ಎತ್ತರವಾದ ಹುಲ್ಲು ಹಾಗೂ ವಿರಳವಾಗಿ ಅಲ್ಲಲ್ಲಿ ಕುರುಚಲು ಜಾತಿಯ ಸಸ್ಯವರ್ಗಗಳನ್ನು

NOT TO BE REPUBLISHED © KTBS

ಕಾಣಬಹುದು. ದಖನ್ ಪ್ರಸ್ಥಭೂಮಿಯ ಕೇಂದ್ರಭಾಗ, ಅರಾವಳಿ ಪರ್ವತಗಳ ಪಶ್ಚಿಮದಲ್ಲಿರುವ ಥಾರ್ ಮರುಭೂಮಿಯ ಅಂಚಿನ ವಲಯಗಳು ಈ ಬಗೆಯ ಸಸ್ಯವರ್ಗವನ್ನು ಹೊಂದಿವೆ. ಬಬೂಲ್, ಶಿಷಮ್, ಸಭಾಯ್ ಹುಲ್ಲು ಇತ್ಯಾದಿ ಇಲ್ಲಿ ಬೆಳೆಯುತ್ತವೆ.

4) **ಮ್ಯಾಂಗ್ರೋವ್ ಅರಣ್ಯಗಳು :** ತೀರ ಪ್ರದೇಶಗಳ ತಗ್ಗುವಲಯಗಳು ಸಮುದ್ರದ ಉಬ್ಬರದ ಕಾಲದಲ್ಲಿ ನೀರಿನಿಂದ ಆವರಿಸಲ್ಪಡುತ್ತವೆ. ಈ ಕಾಡುಗಳು ಇಂತಹ ನದಿ ಮುಖಜ ಭೂಮಿಗಳು ಮತ್ತು ನದಿ ಅಳಿವೆಗಳ ತಗ್ಗು ಪ್ರದೇಶಗಳಲ್ಲಿ ಕಂಡು ಬರುತ್ತವೆ. ಗಂಗಾ, ಮಹಾನದಿ, ಗೋದಾವರಿ, ಕೃಷ್ಣಾನದಿ ಮುಖಜಭೂಮಿಯಲ್ಲಿ ಕಂಡುಬರುತ್ತವೆ. ಗಂಗಾನದಿಯ ಮುಖಜ ಭೂಮಿಯಲ್ಲಿ ಸುಂದರಿ ಮರಗಳು ಹೇರಳವಾಗಿರುವುದರಿಂದ ಈ ಪ್ರದೇಶವನ್ನು **ಸುಂದರಬನ್** ಎಂದು ಕರೆಯುತ್ತಾರೆ. ಈ ಅರಣ್ಯಗಳ ಕ್ಷೇತ್ರ ದೇಶದಲ್ಲಿ 4.4 ಸಾವಿರ ಚ.ಕಿ.ಮೀ ರಷ್ಟಿರುವುದು.




@KTBS NOT TO BE REPUBLISHED

5) **ಮರುಭೂಮಿ ಅರಣ್ಯಗಳು :** ಈ ಅರಣ್ಯಗಳು ಸಾಮಾನ್ಯವಾಗಿ ವಾರ್ಷಿಕ 50 ಸೆ.ಮೀ.ಗಿಂತಲೂ ಕಡಿಮೆ ಮಳೆ ಬೀಳುವ ಪ್ರದೇಶಗಳಲ್ಲಿ ಕಂಡು ಬರುತ್ತವೆ. ರಾಜಸ್ತಾನದ ಥಾರ್ ಮರುಭೂಮಿ ಅದಕ್ಕೆ ಹೊಂದಿಕೊಂಡ ಪಂಜಾಬ್, ಹರಿಯಾಣ ಮತ್ತು ಗುಜರಾತ್ ರಾಜ್ಯಗಳ ಕೆಲವು ಭಾಗಗಳಲ್ಲಿ ಈ ಅರಣ್ಯಗಳಿವೆ. ಈ ಸಸ್ಯವರ್ಗಗಳು ಆಳವಾಗಿ ಬೇರುಗಳನ್ನು ಹೊಂದಿದ್ದು ಕುರುಚಲು ಜಾತಿಯ ಸಸ್ಯವರ್ಗಗಳು ಮುಳ್ಳು ಕಂಟಿಗಳಿಂದ ಕೂಡಿರುತ್ತವೆ.

**6) ಹಿಮಾಲಯದ ಅಲ್ಪೈನ್ ಅರಣ್ಯಗಳು :** ಹಿಮಾಲಯ ಪರ್ವತಗಳಲ್ಲಿ ವಿವಿಧ ಬಗೆಯ ಅರಣ್ಯಗಳು ಕಂಡು ಬರುತ್ತವೆ. ಏಕೆಂದರೆ ಎತ್ತರವು ಹೆಚ್ಚಿದಂತೆ ಉಷ್ಣವಲಯದಿಂದ ಧ್ರುವ ಪ್ರದೇಶದವರೆಗಿನ ವಾಯುಗುಣಗಳನ್ನು ಈ ಪರ್ವತಗಳಲ್ಲಿ ಕಾಣಬಹುದು. ವಾಯುಗುಣಕ್ಕೆ ಅನುಗುಣವಾಗಿ ವಿವಿಧ ಪ್ರಕಾರದ ಸಸ್ಯವರ್ಗಗಳು ಇಲ್ಲಿ ಕಂಡು ಬರುವವು. ಇಲ್ಲಿ ಬೆಳೆಯುವ ಮುಖ್ಯ ಮರಗಳೆಂದರೆ ಸಾಲ್, ಬೈರಾ, ಟೂನ್, ಸಿಲ್ವರ್, ಸ್ಪ್ರೂಸ್, ಲಾರೆಲ್ ಮುಂತಾದ ಎಲೆ ಮೊನಚಾದ ಅರಣ್ಯಗಳು ಪ್ರಧಾನವಾಗಿ ಬೆಳೆದಿರುತ್ತವೆ.

**ಚಟುವಟಿಕೆ :**

ನಿಮ್ಮ ಊರಿನ ಸುತ್ತ ಇದ್ದಂತಹ ಮರಗಳ ತೋಪು ಮತ್ತು ಪರಿಸರದ ಬಗ್ಗೆ ನಿಮ್ಮ ಹಿರಿಯರಿಂದ ಮಾಹಿತಿ ಪಡೆದು, ಇಂದು ಅಲ್ಲಿ ಆಗಿರುವ ಬದಲಾವಣೆಗಳನ್ನು ಗಮನಿಸಿ.

**ಅರಣ್ಯಗಳ ಹಂಚಿಕೆ :**

ಯಾವುದೇ ಪ್ರದೇಶವು ಅನುಕೂಲಕರ ಪರಿಸರವನ್ನು ಹೊಂದಿರಲು ಶೇ. 33 ರಷ್ಟು ಅರಣ್ಯ ಕ್ಷೇತ್ರವನ್ನು ಹೊಂದಿರಬೇಕೆಂದು ವಿಜ್ಞಾನಿಗಳು ಅಭಿಪ್ರಾಯಪಟ್ಟಿದ್ದಾರೆ. ಭಾರತವು ಹೊಂದಿರುವ ಅರಣ್ಯದ ವಿಸ್ತೀರ್ಣವು ದೇಶದ ಒಟ್ಟು ಕ್ಷೇತ್ರಕ್ಕೆ ಹೋಲಿಸಿದರೆ ಅತಿಕಡಿಮೆ. ರಾಜ್ಯವಾರು ಅರಣ್ಯಗಳ ಕ್ಷೇತ್ರವನ್ನು ವಿಶ್ಲೇಷಿಸಿದಾಗ ಮಧ್ಯಪ್ರದೇಶ ರಾಜ್ಯವು ಪ್ರಥಮ ಸ್ಥಾನದಲ್ಲಿದ್ದರೆ, ಹರಿಯಾಣ ರಾಜ್ಯವು ಕೊನೆ ಸ್ಥಾನದಲ್ಲಿದ್ದು, ಕರ್ನಾಟಕವು 13ನೇ ಸ್ಥಾನದಲ್ಲಿದೆ.

**ಅರಣ್ಯಗಳ ಸಂರಕ್ಷಣೆ :** ಅರಣ್ಯಗಳನ್ನು ಮಾನವ, ಪ್ರಾಣಿಗಳಿಂದ ಹಾಗೂ ನೈಸರ್ಗಿಕ ವಿಪತ್ತುಗಳಿಂದ ಕಾಪಾಡುವುದನ್ನೇ **'ಸಂರಕ್ಷಣೆ'** ಎಂದು ಕರೆಯುವರು. ಭಾರತದಲ್ಲಿ ಅರಣ್ಯಗಳ ಕ್ಷೇತ್ರವು ನಿರಂತರವಾಗಿ ಇಳಿಮುಖವಾಗುತ್ತಿದೆ. ವ್ಯವಸಾಯದ ವಿಸ್ತರಣೆ, ಹೈನುಗಾರಿಕೆ, ರಸ್ತೆಗಳು, ರೈಲುಮಾರ್ಗಗಳು, ನೀರಾವರಿ ಯೋಜನೆಗಳ ನಿರ್ಮಾಣ, ಕಾಡ್ಗಿಚ್ಚು, ಗಣಿಗಾರಿಕೆ ಮುಂತಾದವುಗಳು ಅರಣ್ಯ ನಾಶಕ್ಕೆ ಮುಖ್ಯ ಕಾರಣಗಳಾಗಿವೆ. ಆದ್ದರಿಂದಾಗಿ ಅರಣ್ಯಗಳನ್ನು ಸಂರಕ್ಷಿಸಬೇಕಾದುದು ಅತ್ಯಂತ ಮುಖ್ಯವಾಗಿದೆ. ಇದಕ್ಕಾಗಿ ಕೆಲವು ಸಂರಕ್ಷಣಾ ಕ್ರಮಗಳನ್ನು ಮಾಡಬೇಕಿದೆ.

**ಸಂರಕ್ಷಣಾ ವಿಧಾನಗಳು :** ಕಾಡ್ಗಿಚ್ಚು ಉಂಟುಮಾಡುವ ಘರ್ಷಿತ ಮರಗಳನ್ನು ತೆಗೆಯುವುದು. ಅರಣ್ಯದ ಮರಗಳಿಗೆ ತಗಲುವ ರೋಗಗಳನ್ನು ನಿಯಂತ್ರಿಸುವುದು. ಸಸಿಗಳನ್ನು ನೆಡುವುದು, ಬೀಜಗಳನ್ನು ಹರಡುವುದು. ಕಾನೂನು ಬಾಹಿರವಾಗಿ ಮರ ಕಡಿಯುವುದನ್ನು ನಿಯಂತ್ರಿಸುವುದು. ಅರಣ್ಯಗಳಲ್ಲಿ ಸಾಕು ಪ್ರಾಣಿಗಳ ಮೇಯಿಸುವಿಕೆಯನ್ನು ನಿಯಂತ್ರಿಸುವುದು. ಸಾರ್ವಜನಿಕರನ್ನು ಮರ ನೆಡಲು ಪ್ರೋತ್ಸಾಹಿಸುವುದು ಮತ್ತು ಅವುಗಳ ಪ್ರಾಮುಖ್ಯತೆಯ ಬಗ್ಗೆ ತಿಳುವಳಿಕೆ ನೀಡಿ ರಕ್ಷಣೆಗೆ ಪ್ರೇರೇಪಿಸುವುದು. ಸಾಮಾಜಿಕ ಅರಣ್ಯ ಯೋಜನೆಯನ್ನು ತ್ವರಿತವಾಗಿ ಯಶಸ್ವಿಯಾಗಿ ಕಾರ್ಯಗತಗೊಳಿಸುವುದು.

**ವನ್ಯ ಜೀವಿ ಧಾಮಗಳು** : ವಿವಿಧ ಪ್ರಾಣಿಗಳನ್ನು ಅವುಗಳ ಮೂಲ ಸ್ಥಳದಲ್ಲಿಯೇ ಸಂರಕ್ಷಿಸಲು ವನ್ಯಜೀವಿ ಧಾಮಗಳನ್ನು ನಿರ್ಮಿಸಲಾಗಿದೆ. ಭಾರತದಲ್ಲಿ ಇಂದು ಸುಮಾರು 523 ವನ್ಯಜೀವಿ ಧಾಮಗಳಿವೆ. ಅವುಗಳಲ್ಲಿ ಮುಖ್ಯವಾದವುಗಳೆಂದರೆ :

- **ತಮಿಳುನಾಡು :** ಅಣ್ಣಾಮಲೈ ವನ್ಯ ಜೀವಿಧಾಮ, ಕೊಯಿಮತ್ತೂರು, ನೀಲಗಿರಿ.
- **ಪಶ್ಚಿಮ ಬಂಗಾಳ :** ಮದಾರಿಹಾತ್, ಜಾಲ್ದಾಪಾರ.
- **ರಾಜಸ್ತಾನ :** ಭರತಪುರ, ಕಿವೋಲ ಡಿವೋ ಪಕ್ಷಿಧಾಮ.

© KTBS NOT TO BE REPUBLISHED

- **ಹರಿಯಾಣ** : ಸುಲ್ತಾನಪುರ, ಗುರೆಗಾಂವ.
- **ಪಂಜಾಬ್** : ಬೀರ್‌ಮೊತಿಬಾಗ್, ಪಟಿಯಾಲ.
- **ಆಂಧ್ರಪ್ರದೇಶ** : ಗುಂಟೂರು, ನಾಗಾರ್ಜುನ ಸಾಗರ.

**ರಾಷ್ಟ್ರೀಯ ಉದ್ಯಾನವನಗಳು :** ಭಾರತದಲ್ಲಿ ಸ್ಥಾಪಿತವಾದ ಮೊದಲ ರಾಷ್ಟ್ರೀಯ ಉದ್ಯಾನವನವೆಂದರೆ ಉತ್ತರಾಂಚಲದ ಜಿಮ್ ಕಾರ್ಬೆಟ್. ದೇಶದ ಅತಿಮುಖ್ಯ ರಾಷ್ಟ್ರೀಯ ಉದ್ಯಾನವನಗಳೆಂದರೆ :

1) ಕಾಜಿರಂಗ ನ್ಯಾಷನಲ್ ಪಾರ್ಕ್, ಸಿಬ್‌ಸಾಗರ, ಅಸ್ಸಾಂ.
2) ಸುಂದರಬನ, 24 ಪರಗಣ ಜಿಲ್ಲೆ, ಪಶ್ಚಿಮ ಬಂಗಾಳ.
3) ಹಜಾರಿಭಾಗ ನ್ಯಾಷನಲ್ ಪಾರ್ಕ್, ಬಿಹಾರ.
4) ಗಿರ್ ನ್ಯಾಷನಲ್ ಪಾರ್ಕ್, ಜಗನ್ನಾಥ, ಗುಜರಾತ.
5) ಕನ್ಹಾ ರಾಷ್ಟ್ರೀಯ ಉದ್ಯಾನವನ, ಮಾಂಡ್ಯ ಮತ್ತು ಬಾಲಘಾಟ್ ಮಧ್ಯ ಪ್ರದೇಶ.
6) ತಾಂಡೋವಾ ರಾಷ್ಟ್ರೀಯ ಉದ್ಯಾನವನ, ಚಂದ್ರಪುರ, ಮಹಾರಾಷ್ಟ್ರ.

**ಜೈವಿಕ ಸಂರಕ್ಷಣಾ ವಲಯಗಳು (Biosphere Reserves) :**

ಭಾರತವು ಸಸ್ಯ ಸಮೃದ್ಧತೆಯ ಜೊತೆಗೆ ಪ್ರಾಣಿ ಸಂಪತ್ತಿನ ವೈವಿಧ್ಯತೆಯನ್ನು ಒಳಗೊಂಡಿದೆ. ಈ ಜೈವಿಕ ವ್ಯವಸ್ಥೆಗಳನ್ನು ಕಾಪಾಡಲು ದೇಶದಲ್ಲಿ 18 ಜೈವಿಕ ವಲಯಗಳನ್ನು ಸಂರಕ್ಷಿಸಲಾಗುತ್ತಿದೆ. ಅವುಗಳೆಂದರೆ ನೀಲಗಿರಿ, ನಂದಾದೇವಿ, ನೋಕ್ರೆಕ್, ಗ್ರೇಟ್‌ನಿಕೊಬಾರ್, ಮನ್ನಾರ್ ಅಖಾತ, ಮನಾಸ್ ಸುಂದರಬನ, ಸಿಮಿಲಿಪಾಲ್, ಕಾಂಚನಗಂಗಾ, ಅಮರಕಂಟಕ, ಶೀತ ಮರುಭೂಮಿ (ಹಿಮಾಚಲ ಪ್ರದೇಶ) ಪನ್ನಾ ಮತ್ತು ಶೇಷಾಚಲಂ ನೀಲಗಿರಿ ಸಂರಕ್ಷಣಾ ವಲಯವು ದೇಶದಲ್ಲಿ ಪ್ರಥಮವಾಗಿದೆ.

**ನಿಮಗೆ ಇದು ತಿಳಿದಿರಲಿ**

- ಭಾರತದಲ್ಲಿ ಸುಮಾರು 523 ವನ್ಯಜೀವಿ ಧಾಮಗಳಿವೆ.
- 99 ರಾಷ್ಟ್ರೀಯ ಉದ್ಯಾನವನಗಳಿವೆ.
- 70 ಸಸ್ಯೋದ್ಯಾನ (ಬಟಾನಿಕಲ್ ಗಾರ್ಡನ್)ಗಳಿವೆ.
- 275 ಪ್ರಾಣಿ ಸಂಗ್ರಾಹಲಯಗಳಿವೆ.

© KTBS NOT TO BE REPUBLISHED

## ಅಭ್ಯಾಸಗಳು

**I. ಬಿಟ್ಟ ಸ್ಥಳಗಳನ್ನು ಸೂಕ್ತವಾದ ಪದಗಳಿಂದ ಭರ್ತಿ ಮಾಡಿ.**

1) ಅಸ್ಸಾಂ, ಮೇಘಾಲಯಗಳಲ್ಲಿ ಕಂಡುಬರುವ ಅರಣ್ಯದ ಪ್ರಕಾರವು __________ ಆಗಿದೆ.

2) ಹಿಮಾಲಯದಲ್ಲಿ __________ ಅರಣ್ಯಗಳು ಕಂಡು ಬರುತ್ತವೆ.

3) ಗಂಗಾನದಿ ಮುಖಜ ಭೂಮಿ ಪ್ರದೇಶವನ್ನು __________ ವೆಂದು ಕರೆಯುತ್ತಾರೆ.

4) ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವು __________ ರಾಜ್ಯದಲ್ಲಿದೆ.

5) ಸುಂದರಬನ್ ಎಂದು ಕರೆಯಲು __________ ಮರಗಳು ಬೆಳೆಯಲು ಕಾರಣವಾಗಿದೆ.

**II. ಈ ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಗಳನ್ನು ಬರೆಯಿರಿ.**

1. ಭಾರತವು ಹೊಂದಿರುವ ಅರಣ್ಯ ಪ್ರದೇಶಗಳೆಷ್ಟು ?
2. ಕರ್ನಾಟಕದ ಎರಡು ರಾಷ್ಟ್ರೀಯ ಉದ್ಯಾನವನಗಳನ್ನು ಹೆಸರಿಸಿ.
3. ಸ್ವಾಭಾವಿಕ ಸಸ್ಯವರ್ಗ ಎಂದರೇನು?
4. ದೇಶದಲ್ಲಿನ ಅರಣ್ಯ ಸಂರಕ್ಷಣೆಗೆ ಸಲಹೆಗಳು ಯಾವುವು ?
5. ಜೈವಿಕ ವೈವಿಧ್ಯ ಎಂದರೇನು?
6. ಭಾರತದಲ್ಲಿ ಎಲೆ ಉದುರುವ ಅರಣ್ಯಗಳ ಲಕ್ಷಣ ಮತ್ತು ಹಂಚಿಕೆಯನ್ನು ತಿಳಿಸಿ.
7. ಅರಣ್ಯ ಸಂರಕ್ಷಣೆ ಎಂದರೇನು? ಅದರ ಪ್ರಾಮುಖ್ಯತೆ ಮತ್ತು ವಿಧಾನಗಳನ್ನು ತಿಳಿಸಿ.

**III. ಚಟುವಟಿಕೆಗಳು :**

1) ನೀವಿರುವ ಪ್ರದೇಶದ ಸ್ವಾಭಾವಿಕ ಸಸ್ಯ ವರ್ಗವನ್ನು ತಿಳಿಸಿ. ಅಲ್ಲಿರುವ ಮುಖ್ಯ ಸಸ್ಯವರ್ಗ ಮತ್ತು ಪ್ರಾಣಿವರ್ಗವನ್ನು ಪಟ್ಟಿ ಮಾಡಿರಿ.

2) ನೀವು ನೋಡಿರುವ ವಿವಿಧ ಮರಗಳ ಹೆಸರುಗಳನ್ನು ಪಟ್ಟಿ ಮಾಡಿರಿ.

**VI. ಯೋಜನೆಗಳು :**

1) ವನ್ಯ ಜೀವಿಧಾಮಗಳಲ್ಲಿ ವಾಸಿಸುವ ಪ್ರಾಣಿಗಳ ಚಿತ್ರಗಳ ಆಲ್ಬಂ ತಯಾರಿಸಿ.

2) ಭಾರತದ ನಕ್ಷೆಯಲ್ಲಿ ಜೈವಿಕ ಸಂರಕ್ಷಣಾವಲಯಗಳನ್ನು ಗುರುತಿಸಿ.

NOT TO BE REPUBLISHED ©KTBS

## ಅಧ್ಯಾಯ–14

# ಭಾರತದ ಜಲ ಸಂಪನ್ಮೂಲಗಳು

H7B4U7

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ನೀರಾವರಿ ಮಹತ್ವ
- ನೀರಾವರಿ ವಿಧಗಳು.
- ವಿವಿಧೋದ್ದೇಶ ನದಿ ಕಣಿವೆ ಯೋಜನೆಗಳು.
- ಭಾರತದ ಪ್ರಮುಖ ಜಲ ವಿದ್ಯುಚ್ಛಕ್ತಿ ಯೋಜನೆಗಳು
- ರಾಷ್ಟ್ರೀಯ ವಿದ್ಯುತ್‌ಜಾಲ.
- ಮಳೆನೀರು ಸಂಗ್ರಹಣೆ.

ನೀರು ಒಂದು ಪ್ರಮುಖ ನೈಸರ್ಗಿಕ ಸಂಪನ್ಮೂಲವಾಗಿದೆ. ಇದು ಮಾನವನ ಮೂಲ ಬೇಡಿಕೆಯಾಗಿದ್ದು, ರಾಷ್ಟ್ರದ ಸಂಪತ್ತಾಗಿರುವುದು. ಇದನ್ನು ನೀರಾವರಿ, ಜಲವಿದ್ಯುಚ್ಛಕ್ತಿ ಉತ್ಪಾದನೆ, ಕೈಗಾರಿಕೆ, ಗೃಹಬಳಕೆ, ಜಲಸಾರಿಗೆ, ಮೀನುಗಾರಿಕೆ ಮತ್ತು ಮನರಂಜನಾ ಉದ್ದೇಶಗಳಿಗಾಗಿ ಬಳಸಲಾಗುತ್ತದೆ. ಸತತವಾಗಿ ಹೆಚ್ಚುತ್ತಿರುವ ಜನಸಂಖ್ಯೆಯ ಅಗತ್ಯಗಳು ಮತ್ತು ರಾಷ್ಟ್ರದ ನೈಸರ್ಗಿಕ ಸಂಪತ್ತಿನ ನ್ಯಾಯಸಮ್ಮತ ಬಳಕೆ, ಇವುಗಳ ದೃಷ್ಟಿಯಿಂದ ಜಲಸಂಪತ್ತಿನ ಅಭಿವೃದ್ಧಿಯು ಅವಶ್ಯಕವಾಗಿದೆ.

ಭೂಮಿಯ ಮೇಲಿನ ನೀರಿನ ಮೂಲಗಳೆಂದರೆ ನದಿಗಳು ಮತ್ತು ಸರೋವರಗಳು. ಅಂತರ್ಜಲದ ನೀರಿನ ಮೂಲಗಳೆಂದರೆ ಬಾವಿ ಮತ್ತು ಚಿಲುಮೆಗಳು. ಇವುಗಳಲ್ಲಿ ನೀರಿನ ಲಭ್ಯತೆಯು ಪ್ರದೇಶದಿಂದ ಪ್ರದೇಶಕ್ಕೆ ಕಾಲದಿಂದ ಕಾಲಕ್ಕೆ ವ್ಯತ್ಯಾಸ ಹೊಂದುತ್ತದೆ. ಭಾರತದಲ್ಲಿ ಮಳೆಯು ಅನಿಶ್ಚಿತ, ಅಸಮಾನ ಹಾಗೂ ನಿಯತಕಾಲಿಕವಾಗಿರುವುದರಿಂದ ವ್ಯವಸಾಯ ಮಾಡಲು ಕಾಲುವೆ, ಕೆರೆ ಹಾಗೂ ಬಾವಿ ನೀರಾವರಿಗಳನ್ನು ಅವಲಂಬಿಸಿದೆ.

ನೀರಾವರಿ ಎಂದರೆ "ವ್ಯವಸಾಯದ ಭೂಮಿಗೆ ಕೃತಕವಾಗಿ ಕಾಲುವೆ, ಬಾವಿ ಮತ್ತು ಕೆರೆಗಳಿಂದ ನೀರು ಸರಬರಾಜು ಮಾಡುವುದು." ಕಡಿಮೆ ಮಳೆ ಬೀಳುವ ಪ್ರದೇಶಗಳಲ್ಲಿ ಮತ್ತು ವ್ಯವಸಾಯವು ಅತ್ಯಂತ ಪ್ರಧಾನವಾಗಿರುವ ಕಡೆಗಳಲ್ಲಿ ನೀರಾವರಿ ಬಹಳ ಅವಶ್ಯಕವಾಗಿದೆ. ನೀರಾವರಿ ವ್ಯವಸಾಯ ಪದ್ಧತಿಯು ಕೃಷಿಯ ಇತಿಹಾಸದಲ್ಲಿಯೇ ಒಂದು ಮಹತ್ವದ ಸಾಧನೆಯಾಗಿದೆ. ದೇಶದಲ್ಲಿ ಬಳಕೆಗೆ ದೊರೆಯುವ ಒಟ್ಟು ಜಲಸಂಪತ್ತಿನ ಪ್ರಮಾಣ ಗರಿಷ್ಠ 140 ದಶಲಕ್ಷ ಹೆಕ್ಟರ್ ಪ್ರದೇಶಕ್ಕೆ ನೀರಾವರಿಯನ್ನು ಒದಗಿಸಬಹುದು. ಆದರೆ ಅಭಿವೃದ್ಧಿ ಪಡಿಸಿರುವ ನಿವ್ವಳ ನೀರಾವರಿಯ ಕ್ಷೇತ್ರ 62.2 ದಶಲಕ್ಷ ಹೆಕ್ಟೇರ್‌ಗಳಷ್ಟು ಮಾತ್ರ. ಭಾರತವು ಇಂದು ಪ್ರಪಂಚದಲ್ಲಿ ಅತಿ ಹೆಚ್ಚು ನೀರಾವರಿಯ ಕ್ಷೇತ್ರವನ್ನು ಹೊಂದಿದೆ.

**ನಿಮಗೆ ತಿಳಿದಿರಲಿ :**

- ನದಿಗಳ ಮೂಲಕ ಹರಿಯುವ ನೀರಿನ ಪ್ರವಾಹ 1,869 ಬಿಲಿಯನ್ ಘನ ಕಿ.ಮೀ. ಇದರಲ್ಲಿ ಬಳಸಿಕೊಳ್ಳಬಹುದಾದ ಪ್ರಮಾಣ 690 ದ.ಲ. ಕಿ.ಮೀ.
- ಅಂತರ್ಜಲದ ಪ್ರಮಾಣ 432 ದ.ಲ.ಘನ ಕಿ.ಮೀ.
- ದೇಶದಲ್ಲಿ ಬಳಕೆಗೆ ದೊರೆಯುವ ಒಟ್ಟು ಜಲಸಂಪತ್ತಿನ ಪ್ರಮಾಣ 1,122 ಬಿಲಿಯನ್ ಘನ ಕಿ.ಮೀ.
- 1 ಹೆಕ್ಟೇರ್ = 2.47 ಎಕರೆ

©KTBS NOT TO BE REPUBLISHED

**ನೀರಾವರಿಯ ವಿಧಗಳು :** ಭಾರತವು ಪ್ರಾಕೃತಿಕ ಪರಿಸರ ವೈವಿಧ್ಯತೆಗಳಿಗೆ ಹೆಸರಾದದ್ದು. ಜೊತೆಗೆ ಜಲ ಸಂಪತ್ತಿನ ಹಂಚಿಕೆಯಲ್ಲಿ ಈ ವ್ಯತ್ಯಾಸವನ್ನು ಸ್ಪಷ್ಟವಾಗಿ ಕಾಣಬಹುದು. ಇದಲ್ಲದೆ ವ್ಯವಸಾಯಕ್ಕೆ ಬೇಕಾಗಿರುವ ನೀರಾವರಿಯ ಪ್ರಮಾಣ, ಮಳೆಯ ಹಂಚಿಕೆ, ಮೇಲ್ಮೈ ಲಕ್ಷಣ, ಬೆಳೆಯುವ ಬೆಳೆಗಳು, ರೂಢಿಯಲ್ಲಿರುವ ವ್ಯವಸಾಯ ಪದ್ಧತಿ ಮುಂತಾದವುಗಳನ್ನು ಅನುಸರಿಸಿ ವಿವಿಧ ಪ್ರದೇಶಗಳಲ್ಲಿ ವಿವಿಧ ಬಗೆಯ ನೀರಾವರಿ ಪದ್ಧತಿಗಳು ದೇಶದಾದ್ಯಂತ ರೂಢಿಯಲ್ಲಿವೆ. ಇವುಗಳನ್ನು ನೀರಾವರಿಯ ಮೂಲದ ಆಧಾರದ ಮೇಲೆ ಬಾವಿ ನೀರಾವರಿ, ಕಾಲುವೆ ನೀರಾವರಿ, ಕೆರೆ ನೀರಾವರಿ ಎಂದು ವಿಂಗಡಿಸಬಹುದು.

> **ನಿಮಗೆ ತಿಳಿದಿರಲಿ :**
> ಭಾರತವು ಪ್ರಪಂಚದಲ್ಲಿ ಅತಿ ಹೆಚ್ಚು ನೀರಾವರಿಯ ಕ್ಷೇತ್ರವನ್ನು ಹೊಂದಿದೆ. ಚೀನಾ ಎರಡನೆಯ ಸ್ಥಾನದಲ್ಲಿದೆ.

**(1) ಬಾವಿ ನೀರಾವರಿ :** ಭಾರತದ ಪ್ರಮುಖ ನೀರಾವರಿ ಮೂಲಗಳಲ್ಲಿ ಬಾವಿ ನೀರಾವರಿಯು ಅತಿ ಮುಖ್ಯವಾದುದು. ಇದು ದೇಶದಲ್ಲಿ ಅತಿ ಹೆಚ್ಚು ಕೃಷಿ ಕ್ಷೇತ್ರಕ್ಕೆ ನೀರಾವರಿ ಸೌಲಭ್ಯವನ್ನು ಒದಗಿಸುವ ವಿಧಾನವಾಗಿದೆ. ಬಾವಿಗಳನ್ನು ತೋಡಿ ತನ್ಮೂಲಕ ಭೂ ಅಂತರ್ಜಲವನ್ನು ಹೊರತೆಗೆದು ಕೃಷಿಗೆ ಬಳಸುವುದೇ ಬಾವಿ ನೀರಾವರಿ. ಬಾವಿ ನೀರಾವರಿಯನ್ನು ಕಡಿಮೆ ಮಳೆ ಬೀಳುವ ಭಾಗಗಳಲ್ಲಿ ಹೆಚ್ಚು ಉಪಯುಕ್ತವಾಗಿವೆ. ಬಾವಿಯ ನಿರ್ಮಾಣ ಮತ್ತು ನಿರ್ವಹಣೆಯು ಸುಲಭ. ಕೆರೆ ಮತ್ತು ಕಾಲುವೆ ನೀರಾವರಿ ಸೌಲಭ್ಯವಿಲ್ಲದ ಭಾಗಗಳಲ್ಲಿ ಬಾವಿ ನೀರಾವರಿ ಅವಶ್ಯಕ. ಬಾವಿಗಳಲ್ಲಿ ಎರಡು ಪ್ರಕಾರವಾಗಿ ವಿಂಗಡಿಸಲಾಗಿದೆ. (1) ತೆರೆದ ಬಾವಿ (2) ಕೊಳವೆ ಬಾವಿ.

**ತೆರೆದ ಬಾವಿ :** ಇಂತಹ ಬಾವಿಗಳನ್ನು ಕೃಷಿ ಭೂಮಿಯ ಸೂಕ್ತವಾದ ಸ್ಥಳದಲ್ಲಿ ತೋಡಲಾಗುವುದು. ಅವುಗಳಿಂದ ನೀರನ್ನು ಮಾನವನ ದೈಹಿಕ ಬಲ, ಪ್ರಾಣಿಗಳಿಂದ ಅಥವಾ ಯಂತ್ರಗಳ ಸಹಾಯದಿಂದ ಮೇಲೆತ್ತಿ ಜಮೀನಿಗೆ ಒದಗಿಸಲಾಗುವುದು. ಇತ್ತೀಚೆಗೆ ಡೀಸೆಲ್ ಮತ್ತು ವಿದ್ಯುತ್ ಚಾಲಿತ ಯಂತ್ರ ಇತ್ಯಾದಿ ವಿಧಾನಗಳಿಂದ ನೀರನ್ನು ಹೊರತೆಗೆಯಲಾಗುವುದು.

**ಕೊಳವೆ ಬಾವಿ : ಭಾ**ರತದ ಬಾವಿ ನೀರಾವರಿಯಲ್ಲಿ ಇಂದು ಕೊಳವೆ ಬಾವಿಗಳ ಪಾತ್ರ ಅತಿ ಪ್ರಧಾನ. ಒಟ್ಟು ಬಾವಿ ನೀರಾವರಿ ಕ್ಷೇತ್ರದ ಶೇ. 59.7 ರಷ್ಟು ಹಾಗೂ ದೇಶದ ಒಟ್ಟು ನೀರಾವರಿ ಕ್ಷೇತ್ರ ಶೇ. 33.7 ರಷ್ಟು ಕೊಳವೆ ಬಾವಿ ನೀರಾವರಿಗೊಳಪಟ್ಟಿದೆ.

**2) ಕಾಲುವೆ ನೀರಾವರಿ :** ಭಾರತದಲ್ಲಿ ರೂಢಿಯಲ್ಲಿರುವ ನೀರಾವರಿ ಪದ್ಧತಿಗಳಲ್ಲಿ ಕಾಲುವೆ ನೀರಾವರಿಯು ಪ್ರಮುಖವಾದುದು. ಜಗತ್ತಿನಲ್ಲಿ ಕಾಲುವೆ ನೀರಾವರಿಯನ್ನು ಹೊಂದಿದ ದೇಶಗಳಲ್ಲಿ ಭಾರತವೂ ಸಹ ಮುಖ್ಯವಾದುದು. ವಿಸ್ತಾರವಾದ ಸಾಗುವಳಿ ಭೂಮಿಗೆ ಕಾಲುವೆ ನೀರಾವರಿಯನ್ನು ಒದಗಿಸಬಹುದಾಗಿದೆ. ಭಾರತವು ಸುಮಾರು 16.5 ದಶಲಕ್ಷ ಹೆಕ್ಟೇರ್ ಪ್ರದೇಶವು ಕಾಲುವೆ ನೀರಾವರಿ ಕ್ಷೇತ್ರವನ್ನು ಹೊಂದಿದೆ. ಇದು ದೇಶದಲ್ಲಿ ಬಾವಿಯ ನಂತರ ಎರಡನೆಯ ಮುಖ್ಯ ನೀರಾವರಿಯ ಮೂಲವಾಗಿದೆ. ಇದರಲ್ಲಿ ಎರಡು ಪ್ರಕಾರಗಳಿವೆ. (1) ಪ್ರವಾಹ ಕಾಲುವೆ (2) ಸರ್ವಕಾಲಿಕ ಕಾಲುವೆ.

**ಪ್ರವಾಹ ಕಾಲುವೆಗಳು :** ಯಾವುದೇ ರೀತಿಯ ಅಣೆಕಟ್ಟೆಗಳನ್ನು ಕಟ್ಟದೆ ನದಿಗಳಿಂದ ನೇರವಾಗಿ ಕಾಲುವೆಗಳನ್ನು ತೋಡಲಾಗುವುದು. ನದಿಗಳು ತುಂಬಿ ಹರಿಯುವಾಗ ಈ ಕಾಲುವೆಗಳ ಮೂಲಕ ನೀರು ಹರಿಯುವುದು. ಇವುಗಳಿಗೆ **ಪ್ರವಾಹ ಕಾಲುವೆಗಳು** ಎಂದು ಕರೆಯುವರು.

NOT TO BE REPUBLISHED © KTBS

**ಸಾರ್ವಕಾಲಿಕ ಕಾಲುವೆ :** ನದಿಗಳಿಗೆ ಅಣೆಕಟ್ಟುಗಳನ್ನು ಕಟ್ಟಿ ಜಲಾಶಯಗಳನ್ನು ನಿರ್ಮಿಸಿ, ನೀರನ್ನು ಸಂಗ್ರಹಿಸಿ, ಕೃಷಿ ಭೂಮಿಗೆ ನೀರನ್ನೊದಗಿಸಲು ತೋಡುವ ಕಾಲುವೆಗಳಿಗೆ **'ಸಾರ್ವಕಾಲಿಕ ಕಾಲುವೆ'** ಗಳೆಂದು ಕರೆಯುವರು. ಭಾರತದಲ್ಲಿ ಉತ್ತರ ಪ್ರದೇಶ, ಆಂಧ್ರ ಪ್ರದೇಶ, ಮಧ್ಯ ಪ್ರದೇಶ, ಪಂಜಾಬ್, ರಾಜಸ್ತಾನ, ಹರಿಯಾಣ ಮತ್ತು ಬಿಹಾರ ಜಿಲ್ಲೆಗಳಲ್ಲಿ ಈ ಕಾಲುವೆ ಜಾಲ ಹರಡಿದೆ.

3) **ಕೆರೆ ನೀರಾವರಿ :** ಭಾರತದಲ್ಲಿ ಕೆರೆ ನೀರಾವರಿಯು ಪುರಾತನ ಕಾಲದಿಂದಲೂ ರೂಢಿಯಲ್ಲಿದೆ. ಝರಿ, ತೊರೆ ಮತ್ತು ಹಳ್ಳಗಳು ಹರಿಯುವ ಇಳಿಜಾರಿಗೆ ಅಡ್ಡಲಾಗಿ ಒಡ್ಡುಗಳನ್ನು ನಿರ್ಮಿಸಿ ನೀರನ್ನು ಸಂಗ್ರಹಿಸುವುದೇ **'ಕೆರೆಗಳು'**. ಹೀಗೆ ಸಂಗ್ರಹಿಸಿದ ನೀರನ್ನು ತೂಬುಗಳ ಮೂಲಕ ಹಾಗೂ ಚಿಕ್ಕ ಕಾಲುವೆಗಳ ಮೂಲಕ ಕೃಷಿ ಭೂಮಿಗೆ ಸರಬರಾಜು ಮಾಡಲಾಗುವುದು. ಆಂಧ್ರ ಪ್ರದೇಶ, ತಮಿಳುನಾಡು, ಒಡಿಶಾ, ಕರ್ನಾಟಕಗಳಲ್ಲಿ ಕೆರೆ ನೀರಾವರಿಯು ಹೆಚ್ಚಾಗಿ ಕಂಡುಬರುವುದು. ಇದಲ್ಲದೆ ಮಧ್ಯಪ್ರದೇಶ, ರಾಜಸ್ತಾನ, ಜಾರ್ಖಂಡ್, ಉತ್ತರ ಪ್ರದೇಶಗಳಲ್ಲಿಯೂ ಸಹ ಕೆರೆ ನೀರಾವರಿಯನ್ನು ಕಾಣಬಹುದು.

**ಚಟುವಟಿಕೆ :**

ನಿಮಗೆ ಹತ್ತಿರದಲ್ಲಿರುವ ಪ್ರಮುಖ ಕೆರೆಗಳ ಪಟ್ಟಿ ಮಾಡಿ. ಕೆರೆಗಳನ್ನು ಸಂರಕ್ಷಿಸಲು ನಿಮ್ಮ ಸಲಹೆಗಳನ್ನು ತಿಳಿಸಿ.

**ವಿವಿಧೋದ್ದೇಶ ನದಿ ಕಣಿವೆ ಯೋಜನೆಗಳು**

ಭಾರತವು ಹಲವಾರು ನದಿ, ಕಣಿವೆ ಯೋಜನೆಗಳನ್ನು ರೂಪಿಸಿ, ಕಾರ್ಯಗತಗೊಳಿಸಿದೆ. ನದಿ ಕಣಿವೆಯಲ್ಲಿ ಅದರ ಉಪನದಿಗಳನ್ನು ಒಳಗೊಂಡಂತೆ ಹಲವಾರು ಅಣೆಕಟ್ಟುಗಳನ್ನು ನಿರ್ಮಿಸಲಾಗುವುದು. ಇದರಿಂದ ಆ ನದಿ ಕಣಿವೆಯಲ್ಲಿನ ಜಲ ಸಂಪತ್ತಿನ ಗರಿಷ್ಠ ಪ್ರಮಾಣದ ಬಳಕೆಯು ಸಾಧ್ಯವಾಗುವುದು. ಇಂತಹ ಯೋಜನೆಗಳು ವ್ಯವಸಾಯಕ್ಕೆ ನೀರನ್ನು ಒದಗಿಸುವುದಲ್ಲದೆ ಇನ್ನಿತರ ಹಲವಾರು ಉದ್ದೇಶಗಳನ್ನು ಹೊಂದಿರುತ್ತವೆ. ಇವುಗಳನ್ನು **ವಿವಿಧೋದ್ದೇಶ ನದಿಕಣಿವೆ ಯೋಜನೆ**ಗಳೆಂದು ಕರೆಯುವರು. ಈ ಯೋಜನೆಯ ಮುಖ್ಯ ಉದ್ದೇಶವೆಂದರೆ (1) ನೀರಾವರಿ ಸೌಲಭ್ಯವನ್ನು ಒದಗಿಸುವುದು (2) ಜಲವಿದ್ಯುಚ್ಛಕ್ತಿಯನ್ನು ಉತ್ಪಾದಿಸುವುದು (3) ನದಿಗಳ ಪ್ರವಾಹವನ್ನು ನಿಯಂತ್ರಿಸುವುದು (4) ನೌಕಾಯಾನದ ಸೌಲಭ್ಯವನ್ನು ಒದಗಿಸುವುದು (5) ಗೃಹ ಬಳಕೆ ಹಾಗೂ ಕೈಗಾರಿಕೆಗಳಿಗೆ ನೀರನ್ನು ಒದಗಿಸುವುದು (6) ಮಣ್ಣಿನ ಸವಕಳಿಯನ್ನು ನಿಯಂತ್ರಿಸುವುದು (7) ಮೀನುಗಾರಿಕೆಯ ಅಭಿವೃದ್ಧಿ ಮಾಡುವುದು (8) ಅರಣ್ಯ ಸಂಪತ್ತನ್ನು ವೃದ್ಧಿಸುವುದು.

## ಭಾರತದ ಕೆಲವು ಮುಖ್ಯ ವಿವಿಧೋದ್ದೇಶ ನದಿಕಣಿವೆ ಯೋಜನೆಗಳು

1) **ದಾಮೋದರ ನದಿ ಕಣಿವೆ ಯೋಜನೆ :** ದಾಮೋದರ ಯೋಜನೆಯು ಸ್ವತಂತ್ರ ಭಾರತದ ಮೊದಲನೆಯ ವಿವಿಧೋದ್ದೇಶ ನದಿ ಕಣಿವೆ ಯೋಜನೆಯಾಗಿದೆ. ಇದು ಬಿಹಾರ ಹಾಗೂ ಪಶ್ಚಿಮ ಬಂಗಾಳ ರಾಜ್ಯಗಳು ಜೊತೆಗೂಡಿ ಕೈಗೊಂಡ ಯೋಜನೆಯಾಗಿದೆ. ಈ ನದಿಯು ಪಶ್ಚಿಮ ಬಂಗಾಳದಲ್ಲಿ ಪ್ರವಾಹಗಳಿಂದ ಅಪಾರ ಹಾನಿಯನ್ನುಂಟು ಮಾಡುತ್ತಿದ್ದು, ಇದನ್ನು ಪಶ್ಚಿಮ ಬಂಗಾಳದ **'ಕಣ್ಣೀರಿನ ನದಿ'** ಎಂದು ಕರೆಯುತ್ತಿದ್ದರು. ಈ ನದಿಯಿಂದ ಆಗುವ ಹಾನಿಯನ್ನು ತಡೆಗಟ್ಟಲು ಈ ಯೋಜನೆಯನ್ನು ಕೈಗೊಳ್ಳಲಾಯಿತು.

NOT TO BE REPUBLISHED ©KTBS

ಈ ಯೋಜನೆಯು ಸುಮಾರು 2,495 ಕಿ.ಮೀ ಉದ್ದವಾದ ಕಾಲುವೆಗಳ ಜಾಲವನ್ನು ಹೊಂದಿದ್ದು ಸುಮಾರು 4.5 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸಿದೆ. ತಿಲೈಯಾ, ಮೈಥಾನ್, ಕೊನಾರ್ ಮತ್ತು ಪಂಚೆಟ್ ಹಿಲ್‌ಗಳಲ್ಲಿ ದಾಮೋದರ ಹಾಗೂ ಅದರ ಉಪ ನದಿಗಳಿಗೆ ಅಣೆಕಟ್ಟುಗಳನ್ನು ನಿರ್ಮಿಸಲಾಗಿದೆ. ಬೊಕಾರೋ, ಚಂದ್ರಾಪುರ ಹಾಗೂ ದುರ್ಗಾಪುರಗಳಲ್ಲಿ ಶಾಖೋತ್ಪನ್ನ ವಿದ್ಯುದಾಗಾರಗಳನ್ನು ನಿರ್ಮಿಸಲಾಗಿದೆ. ಈ ಯೋಜನೆಯಿಂದ ಜಾರ್ಖಂಡ್ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳು ಉಪಯೋಗವನ್ನು ಪಡೆದಿವೆ.

**(2) ಭಾಕ್ರಾ ನಂಗಲ್ ಯೋಜನೆ :** ಇದು ಭಾರತದಲ್ಲಿಯೇ ಅತ್ಯಂತ ಎತ್ತರವಾದ ಮತ್ತು ಪ್ರಮುಖವಾದ ವಿವಿಧೋದ್ದೇಶ ನದಿ ಕಣಿವೆ ಯೋಜನೆಯಾಗಿದೆ. ಇದು ಪಂಜಾಬ್, ಹರಿಯಾಣ ಮತ್ತು ರಾಜಸ್ತಾನ ರಾಜ್ಯಗಳ ಸಂಯುಕ್ತ ಯೋಜನೆಯಾಗಿದೆ, ಹಿಮಾಚಲ ಪ್ರದೇಶದ ಭಾಕ್ರಾ ಮತ್ತು ನಂಗಲ್ ಎಂಬಲ್ಲಿ ಸಟ್ಲೇಜ್ ನದಿಗೆ ಅಣೆಕಟ್ಟುಗಳನ್ನು ಕಟ್ಟಲಾಗಿದೆ. ಭಾಕ್ರಾ ಅಣೆಕಟ್ಟು ಏಷ್ಯಾದಲ್ಲಿಯೇ ಅತ್ಯಂತ ಎತ್ತರವಾದ (226 ಮೀ) ಅಣೆಕಟ್ಟೆಯಾಗಿದೆ. ಇದು 3,402 ಕಿ.ಮೀ. ಉದ್ದವಾದ ಕಾಲುವೆಗಳ ಜಾಲವನ್ನು ಹೊಂದಿದ್ದು, 14.6 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯವನ್ನು ಒದಗಿಸುತ್ತದೆ. ಈ ಯೋಜನೆಯಿಂದ ದೆಹಲಿ, ಹಿಮಾಚಲ ಪ್ರದೇಶಗಳು ಸಹ ನೀರಾವರಿ ಮತ್ತು ಜಲ ವಿದ್ಯುಚ್ಛಕ್ತಿ ಸೌಲಭ್ಯವನ್ನು ಪಡೆದಿವೆ. ಇದರ ಜಲಾಶಯವನ್ನು **ಗೋವಿಂದ ಸಾಗರ** ಎಂದು ಕರೆಯುತ್ತಾರೆ.

**(3) ಕೋಸಿ ಯೋಜನೆ :** ಈ ಯೋಜನೆಯ ಮುಖ್ಯ ಉದ್ದೇಶವೆಂದರೆ ಪ್ರವಾಹ ನಿಯಂತ್ರಣ. ಕೋಸಿ ನದಿಯನ್ನು ಬಿಹಾರಿನ 'ಕಣ್ಣೀರಿನ ನದಿ' ಎಂದು ಕರೆಯುತ್ತಾರೆ. ಇದು ಭಾರತ ಮತ್ತು ನೇಪಾಳ ರಾಷ್ಟ್ರಗಳ ಜಂಟಿ ಯೋಜನೆಯಾಗಿದೆ. ಭಾರತ ಮತ್ತು ನೇಪಾಳ ಗಡಿಯಲ್ಲಿ ಬರುವ 'ಹನುಮಾನ ನಗರ' ಎಂಬಲ್ಲಿ ಕೋಸಿ ನದಿಗೆ ಅಣೆಕಟ್ಟನ್ನು ನಿರ್ಮಿಸಲಾಗಿದೆ. ಈ ಯೋಜನೆಯು ಸುಮಾರು 8.75 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯ ಪಡೆದಿವೆ. ಇದರಿಂದ ಉತ್ಪಾದಿಸಲಾಗುವ ವಿದ್ಯುಚ್ಛಕ್ತಿಯಲ್ಲಿ ಶೇ. 50 ರಷ್ಟನ್ನು ನೇಪಾಳಕ್ಕೆ ಒದಗಿಸಲಾಗುತ್ತಿದೆ.

**(4) ಹಿರಾಕುಡ್ ಯೋಜನೆ :** ಒಡಿಶಾದ ಸಾಂಬಾಲಪುರ ಜಿಲ್ಲೆಯಿಂದ 10 ಕಿ.ಮೀ.ದೂರದಲ್ಲಿ ಮಹಾನದಿಗೆ ಈ ಅಣೆಕಟ್ಟನ್ನು ನಿರ್ಮಿಸಲಾಗಿದೆ. ಈ ನದಿಯು 'ಒಡಿಶಾದ ಕಣ್ಣೀರಿನ ನದಿ' ಎಂದು ಕರೆಯಲ್ಪಟ್ಟಿದೆ. ಹಿರಾಕುಡ್ 4,801 ಮೀ. ಉದ್ದವಾಗಿದ್ದು, ಭಾರತದಲ್ಲಿಯೇ ಅತ್ಯಂತ ಉದ್ದವಾದ ಅಣೆಕಟ್ಟೆಯಾಗಿದೆ. ಇದು ಒಟ್ಟು 2.54 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯವನ್ನು ಒದಗಿಸಿದೆ. ಇದರಿಂದ ಒಡಿಶಾ, ಬಿಹಾರ ಮತ್ತು ಛತ್ತೀಸಗಡ ರಾಜ್ಯಗಳು ನೀರಾವರಿ ಮತ್ತು ಜಲ ವಿದ್ಯುಚ್ಛಕ್ತಿ ಸೌಲಭ್ಯವನ್ನು ಪಡೆದಿವೆ.


**(5) ತುಂಗಭದ್ರಾ ಯೋಜನೆ :** ನೀರಾವರಿ ಜಲವಿದ್ಯುಚ್ಛಕ್ತಿ ಉತ್ಪಾದನೆ ಈ ಯೋಜನೆಯ ಮುಖ್ಯ ಉದ್ದೇಶವಾಗಿದ್ದು, ಕರ್ನಾಟಕ ಮತ್ತು ಆಂಧ್ರ ಪ್ರದೇಶ ರಾಜ್ಯಗಳ ಸಂಯುಕ್ತ ಯೋಜನೆಯಾಗಿದೆ. ಈ ಅಣೆಕಟ್ಟನ್ನು ಬಳ್ಳಾರಿ ಜಿಲ್ಲೆಯ ಹೊಸಪೇಟೆ ಬಳಿ ಮಲ್ಲಾಪುರ ಎಂಬಲ್ಲಿ ತುಂಗಭದ್ರಾ ನದಿಗೆ ನಿರ್ಮಿಸಲಾಗಿದೆ. ಈ ಜಲಾಶಯವನ್ನು 'ಪಂಪ ಸಾಗರ' ಎಂದು ಕರೆಯುವರು. ಇದು ಆಂಧ್ರ ಪ್ರದೇಶ ಮತ್ತು ಕರ್ನಾಟಕದ 5.5 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಹಾಗೂ ವಿದ್ಯುಚ್ಛಕ್ತಿ ಒದಗಿಸಿದೆ.

© KTBS NOT TO BE REPUBLISHED

**(6) ನಾಗಾರ್ಜುನ ಸಾಗರ ಯೋಜನೆ :** ಆಂಧ್ರ ಪ್ರದೇಶದ ನಂದಿಕೊಂಡ ಗ್ರಾಮದ ಬಳಿ ಕೃಷ್ಣಾನದಿಗೆ ಈ ಅಣೆಕಟ್ಟನ್ನು ನಿರ್ಮಿಸಲಾಗಿದೆ. ನೀರಾವರಿ ಮತ್ತು ಜಲವಿದ್ಯುಚ್ಛಕ್ತಿ ಉತ್ಪಾದನೆ ಈ ಯೋಜನೆಯ ಮುಖ್ಯ ಉದ್ದೇಶಗಳಾಗಿವೆ. ಇದು ಸುಮಾರು 8.30 ಲಕ್ಷ ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯವನ್ನು ಒದಗಿಸಿದೆ.

**(7) ಕೃಷ್ಣಾ ಮೇಲ್ದಂಡೆ ಯೋಜನೆ :** ಈ ಯೋಜನೆಯು ಕರ್ನಾಟಕದ ದೊಡ್ಡ ಯೋಜನೆಯಾಗಿದೆ. ವಿಜಾಪುರ, ಬಾಗಲಕೋಟೆ, ರಾಯಚೂರು, ಗುಲ್ಬರ್ಗಾ ಜಿಲ್ಲೆಗಳಿಗೆ ನೀರಾವರಿ ಸೌಲಭ್ಯ ಹಾಗೂ ಕುಡಿಯುವ ನೀರಿನ ಯೋಜನೆಯಾಗಿದೆ. ಇದನ್ನು ಬಿಜಾಪುರ ಜಿಲ್ಲೆಯ ಆಲಮಟ್ಟಿ ಬಳಿ ಕೃಷ್ಣಾ ನದಿಗೆ ಅಡ್ಡಲಾಗಿ ಅಣೆಕಟ್ಟು ನಿರ್ಮಿಸಲಾಗಿದೆ. ಇದರಿಂದ ಲಾಲ್‌ಬಹದ್ದೂರ್ ಶಾಸ್ತ್ರಿ ಜಲಾಶಯ ನಿರ್ಮಿತವಾಗಿದೆ ಹಾಗೂ ನಾರಾಯಣಪುರ ಬಳಿ ಮತ್ತೊಂದು ಅಣೆಕಟ್ಟು ನಿರ್ಮಿಸಲಾಗಿದೆ. ಇದರ ಜಲಾಶಯದ ಹೆಸರು ಬಸವ ಸಾಗರ. ಇವುಗಳಿಂದ ಒಟ್ಟು 6.47 ಲಕ್ಷ ಹೆಕ್ಟೇರ್ ಭೂಮಿ ನೀರಾವರಿ ಸೌಲಭ್ಯವನ್ನು ಒದಗಿಸಿದೆ ಹಾಗೂ ಇತ್ತೀಚೆಗೆ ವಿದ್ಯುಚ್ಛಕ್ತಿಯನ್ನು ಉತ್ಪಾದಿಸಲಾಗುತ್ತಿದೆ.

**(8) ನರ್ಮದಾ ಕಣಿವೆ ಯೋಜನೆ :** ಈ ಯೋಜನೆಯ ಪ್ರಾರಂಭದಿಂದಲೂ ವಿವಾದಗಳು ಉಂಟಾಗಿದ್ದರಿಂದ ನರ್ಮದಾ ನದಿ ನೀರಿನ ವಿವಾದದ ಪ್ರಾಧಿಕಾರ ನೇಮಿಸಿ ಮಧ್ಯಪ್ರದೇಶ ಮತ್ತು ಗುಜರಾತ್ ರಾಜ್ಯಗಳ ನಡುವೆ ಈ ನದಿಗೆ ಅಡ್ಡಲಾಗಿ ಕಟ್ಟಿದ ಅಣೆಕಟ್ಟುಗಳ ನೀರಿನ ಹಂಚಿಕೆ ವಿವಾದವನ್ನು ತೀರ್ಮಾನಿಸಲಾಯಿತು. ಒಟ್ಟು 23 ಅಣೆಕಟ್ಟುಗಳನ್ನು ಹೊಂದಿರುವ ನರ್ಮದಾ ನೀರಾವರಿ ಯೋಜನೆಯಲ್ಲಿ ಸರದಾರ ಸರೋವರ, ನರ್ಮದಾ ಸಾಗರ ಮತ್ತು ನರ್ಮದಾ ಮೇಲ್ದಂಡೆ ಯೋಜನೆಗಳು ಪ್ರಮುಖವಾಗಿವೆ. ಈ ಅಣೆಕಟ್ಟುಗಳಿಂದ ಉತ್ತರ ಗುಜರಾತ, ರಾಜಸ್ತಾನ ಮತ್ತು ಮಹಾರಾಷ್ಟ್ರದ ಕೆಲಭಾಗಗಳಿಗೆ ನೀರಾವರಿ ಮತ್ತು ವಿದ್ಯುಚ್ಛಕ್ತಿ ಸೌಲಭ್ಯವನ್ನು ಪಡೆದಿವೆ.




**ಭಾರತದ ಪ್ರಮುಖ ಜಲ ವಿದ್ಯುಚ್ಛಕ್ತಿ ಯೋಜನೆಗಳು :**

ಭಾರತವು ಉತ್ಪಾದಿಸುತ್ತಿರುವ ವಿದ್ಯುತ್ತಿನ ಮೂಲಗಳಲ್ಲಿ ಜಲವಿದ್ಯುತ್ ಎರಡನೆ ಸ್ಥಾನವನ್ನು ಹೊಂದಿದೆ. ಇದು ದೇಶವು 2011ರ ಪ್ರಕಾರ ಉತ್ಪಾದಿಸುತ್ತಿರುವ ಒಟ್ಟು ವಿದ್ಯುತ್ತಿನ ಶೇ. 13.9 ರಷ್ಟನ್ನು

@KTBS NOT TO BE REPUBLISHED

ಹೊಂದಿದೆ. ಭಾರತವು ಸುಮಾರು 410 ಬಿಲಿಯನ್ ಕಿಲೋವ್ಯಾಟ್ಸ್ ಜಲವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಹೊಂದಿದೆಯೆಂದು ಅಂದಾಜು ಮಾಡಲಾಗಿದೆ. ಆದರೆ ಪ್ರಸ್ತುತ ಜಲವಿದ್ಯುತ್ತಿನ ಉತ್ಪಾದನೆ ಕೇವಲ 106.68 ಬಿಲಿಯನ್ ಕಿಲೋವ್ಯಾಟ್ಸ್‌ಗಳಷ್ಟಾಗಿದೆ. ಈ ಕೆಳಗಿನ ರಾಜ್ಯಗಳು ಜಲವಿದ್ಯುಚ್ಛಕ್ತಿಯನ್ನು ಉತ್ಪಾದಿಸುವ ಕೇಂದ್ರಗಳನ್ನು ಹೊಂದಿವೆ.

1. **ಕರ್ನಾಟಕ :** ಶಿವನಸಮುದ್ರ, ತುಂಗಭದ್ರಾ, ಜೋಗ, ಭದ್ರಾ, ಆಲಮಟ್ಟಿ, ಕಾಳಿ (ಸೂಪಾ).
2. **ಆಂಧ್ರಪ್ರದೇಶ :** ನಾಗಾರ್ಜುನ ಸಾಗರ, ಶ್ರೀಶೈಲಂ ಯೋಜನೆ, ರಾಮಪಾದ ಸಾಗರ ಯೋಜನೆ, ಸೀಲೇರು ಯೋಜನೆ,
3. **ತಮಿಳುನಾಡು :** ಮೆಟ್ಟೂರು ಯೋಜನೆ, ಪೈಕಾರ ವಿದ್ಯುತ್ ಯೋಜನೆ, ಪೆರಿಯಾರ ಯೋಜನೆ, ಕುಂದ್ಹಾ ಯೋಜನೆ, ಮೋಯಾರ ಯೋಜನೆ, ಕೋಡಯಾರ ಯೋಜನೆ, ಇತ್ಯಾದಿ
4. **ಮಧ್ಯಪ್ರದೇಶ :** ಬನ್‌ಸಾಗರ, ಗಾಂಧಿ ಸಾಗರ, ಪಂಚಯೋಜನೆ.
5. **ಮಹಾರಾಷ್ಟ್ರ :** ಟಾಟಾ ಜಲ ವಿದ್ಯುತ್ ಯೋಜನೆ, ಬೀರಾ ಯೋಜನೆ, ವೈತರಣಾ ಯೋಜನೆ, ಕೊಯ್ನಾ ಯೋಜನೆ.
6. **ಒಡಿಶಾ :** ಹಿರಾಕುಡ್ ಯೋಜನೆ, ಕೋಲಾಜ ಯೋಜನೆ, ರಂಗಾಲಿ ಯೋಜನೆ, ನಾರಾಜ ಯೋಜನೆ.
7. **ಬಿಹಾರ :** ಕೋಸಿ ಯೋಜನೆ, ಸುವರ್ಣ ರೇಖಾ ಯೋಜನೆ, ತಾವಾ ಯೋಜನೆ.
8. **ಗುಜರಾತ** : ಕಕ್ರಪಾರ ಯೋಜನೆ, ಕಾಡನ ಯೋಜನೆ, ಉಕೈಯೋಜನೆ. ಮೇಲಿನ ಯೋಜನೆಗಳಲ್ಲದೆ ಅನೇಕ ನದಿ ಕಣಿವೆಯೋಜನೆಗಳಲ್ಲಿ ಹಲವಾರು ಜಲ ವಿದ್ಯುತ್ ಕೇಂದ್ರಗಳು ಕಂಡುಬರುತ್ತವೆ.


**ರಾಷ್ಟ್ರೀಯ ವಿದ್ಯುತ್ ಜಾಲ (National Power Grid) :** ಎಲ್ಲಾ ರಾಜ್ಯಗಳು ವರ್ಷದ ಎಲ್ಲಾ ಅವಧಿಯಲ್ಲಿಯೂ ಸಾಕಷ್ಟು ವಿದ್ಯುತ್ತಿನ ಪೂರೈಕೆಯನ್ನು ಹೊಂದಿರುವುದಿಲ್ಲ. ಇದರಿಂದ ಹೆಚ್ಚುವರಿ ವಿದ್ಯುತ್ತನ್ನು ಕೊರತೆಯಿರುವ ಪ್ರದೇಶಗಳಿಗೆ ಸಾಗಿಸಲು ಹಾಗೂ ವಿದ್ಯುತ್ತನ್ನು ಸಮರ್ಪಕವಾಗಿ ಪ್ರಸರಣ ಮಾಡಲು ರಾಷ್ಟ್ರೀಯ ವಿದ್ಯುತ್ ಜಾಲವನ್ನು ನಿರ್ಮಿಸಲಾಗಿದೆ. ಇದರಿಂದ ದೇಶದ ಯಾವುದೇ ಭಾಗದಲ್ಲಿ ಹೆಚ್ಚುವರಿ ವಿದ್ಯುತ್ ಉತ್ಪಾದಿಸಲ್ಪಟ್ಟಿದ್ದರೂ ಅದನ್ನು ಕೊರತೆಯಿರುವ ಪ್ರದೇಶಗಳಿಗೆ ಪೂರೈಸಬಹುದಾಗಿದೆ.

**ಮಳೆಕೊಯ್ಲು ಅಥವಾ ಮಳೆ ನೀರು ಸಂಗ್ರಹಣೆ (Rain Water Harvesting) :** ನೀರು ಅತಿ ಅಮೂಲ್ಯವಾದುದು. ಭಾರತವು ಜಲಸಂಪತ್ತನ್ನು ಅಪಾರ ಪ್ರಮಾಣದಲ್ಲಿ ಒಳಗೊಂಡಿದ್ದರೂ ಅದರ ಹಂಚಿಕೆಯು ಹೆಚ್ಚು ತಾರತಮ್ಯಗಳಿಂದ ಕೂಡಿರುವುದು. ಅಲ್ಲದೆ ಮಳೆಗಾಲದ ಅವಧಿ ಕಡಿಮೆಯಾಗಿದ್ದು, ಹೆಚ್ಚು ಮಳೆ ಬೀಳುವ ಪ್ರದೇಶಗಳೂ ದೀರ್ಘವಾದ ಮಳೆರಹಿತ ಪ್ರದೇಶಗಳಾಗುತ್ತಿದ್ದು ಬೇಸಿಗೆಯಲ್ಲಿ ನೀರಿನ ಕೊರತೆ ಕಂಡುಬರುತ್ತದೆ. ದೇಶದಲ್ಲಿ ಕಂಡು ಬರುತ್ತಿರುವ ಜಲಕ್ಷಾಮದ ಪರಿಹಾರಕ್ಕೆ ಇರುವ ಸರಳ ಮಾರ್ಗವೆಂದರೆ 'ಮಳೆ ಕೊಯ್ಲು' ಅಥವಾ ಮಳೆ ನೀರಿನ ಸಂಗ್ರಹಣೆ. ಮಳೆ ನೀರನ್ನು ಸಂಗ್ರಹಿಸಿ ಬಳಕೆ ಮಾಡುವುದನ್ನೇ **ಮಳೆಕೊಯ್ಲು** ಎಂದು ಕರೆಯುವರು.

NOT TO BE REPUBLISHED ©KTBS

ಇದರಲ್ಲಿ ಎರಡು ವಿಧಗಳಿವೆ. (1) ಮಳೆಬಿದ್ದ ಸ್ಥಳದಲ್ಲಿಯೇ ನೀರನ್ನು ಸಂಗ್ರಹಿಸುವುದು. ಉದಾ : ಮನೆಯ ಮೇಲ್ಛಾವಣಿಯಿಂದ. (2) ಮಳೆ ಬಿದ್ದ ನಂತರ ಹರಿಯುವ ನೀರನ್ನು ಸಂಗ್ರಹಿಸುವುದು. ಉದಾ : ಒಡ್ಡು ಕಟ್ಟಿ ನೀರನ್ನು ಸಂಗ್ರಹಿಸುವುದು.

- ಮನೆಯ ಮೇಲ್ಛಾವಣಿಯ ಮೇಲೆ ಬಿದ್ದು ಹರಿಯುವ ನೀರನ್ನು ಸಂಗ್ರಹಿಸಿ ದಿನನಿತ್ಯದ ಬಳಕೆಗೆ ಬಳಸುವುದು. ಇದರಿಂದ ಸಾರ್ವಜನಿಕ ನೀರು ಪೂರೈಕೆಯ ಮೇಲಿನ ಅವಲಂಬನೆ ಕಡಿಮೆ ಮಾಡುವುದು.



- ವ್ಯವಸಾಯ ಕ್ಷೇತ್ರಗಳಲ್ಲಿ ಹೊಂಡಗಳನ್ನು ತೋಡಿ ನೀರನ್ನು ಸಂಗ್ರಹಿಸುವುದು.
- ಮಳೆ ನೀರು ಹರಿದು ಹೋಗದಂತೆ ತಡೆಯೊಡ್ಡಿ ಭೂಮಿಯಲ್ಲಿ ಇಂಗುವಂತೆ ಮಾಡುವುದು. ಇದರಿಂದ ಅಂತರ್ಜಲ ಮಟ್ಟವು ಮರುಪೂರಣ (Recharging) ಗೊಳ್ಳುವುದು.
- ವೈಯಕ್ತಿಕ ಮಟ್ಟದಲ್ಲಿ ಮಾತ್ರವಲ್ಲದೆ ಸಮುದಾಯಗಳು ಸಹ ಹರಿಯುವ ನೀರಿಗೆ ಅಡ್ಡಗಟ್ಟೆಗಳನ್ನು ನಿರ್ಮಿಸಿ ಸಣ್ಣ ಹೊಂಡ,ಕೆರೆಗಳ ರೂಪದಲ್ಲಿ ನೀರನ್ನು ಸಂಗ್ರಹಿಸಬಹುದು.

ಕರ್ನಾಟಕದಲ್ಲಿ ಮಳೆಕೊಯ್ಲು ಪುರಾತನ ಕಾಲದಿಂದಲೂ ರೂಢಿಯಲ್ಲಿದೆ. ರಾಜ್ಯದಾದ್ಯಂತ ಕಂಡುಬರುವ ಕೆರೆ, ಕಟ್ಟೆ, ಹೊಂಡ, ಮೊದಲಾದವು ಮಳೆ ನೀರಿನ ಸಂಗ್ರಹಣೆಯ ವಿಧಾನಗಳಾಗಿವೆ. ಇವುಗಳನ್ನು ನಿರ್ಲಕ್ಷಿಸಿದುದರಿಂದ ಇಂದು ಜಲಕ್ಷಾಮ ಕಾಣುತ್ತಿದೆ. ಇವುಗಳನ್ನು ರಕ್ಷಿಸಿ, ಸರಿಯಾಗಿ ನಿರ್ವಹಿಸಿ ದೇಶದಲ್ಲಿ ಕಂಡುಬರುವ ನೀರಿನ ಸಮಸ್ಯೆಯನ್ನು ಬಗೆಹರಿಸಬಹುದಾಗಿದೆ.

©KTBS NOT TO BE REPUBLISHED

## ಅಭ್ಯಾಸಗಳು

**I. ಬಿಟ್ಟ ಸ್ಥಳಗಳನ್ನು ಸೂಕ್ತವಾದ ಪದಗಳಿಂದ ಭರ್ತಿ ಮಾಡಿ.**

1) ದಾಮೋದರ ನದಿಯನ್ನು ಬಂಗಾಳದ __________ ನದಿ ಎಂದು ಕರೆಯುತ್ತಾರೆ.

2) ಬಿಹಾರಿನ ಕಣ್ಣೀರಿನ ನದಿ __________ .

3) ಕರ್ನಾಟಕದ ದೊಡ್ಡ ನೀರಾವರಿ ಯೋಜನೆ __________ .

4) ಕಾವೇರಿ ನದಿಗೆ __________ ಎಂಬಲ್ಲಿ ವಿದ್ಯುಚ್ಛಕ್ತಿ ಯೋಜನೆಯನ್ನು ನಿರ್ಮಿಸಲಾಗಿದೆ.

5) ಹಿರಾಕುಡ್ ಯೋಜನೆಯನ್ನು __________ ನದಿಗೆ ನಿರ್ಮಿಸಲಾಗಿದೆ.

**II. ಈ ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಗಳನ್ನು ಬರೆಯಿರಿ.**

1) ನೀರಾವರಿ ಎಂದರೇನು?
2) ನೀರಾವರಿಯ ವಿಧಗಳಾವವು?
3) ವಿವಿಧೋದ್ದೇಶ ನದಿ ಕಣಿವೆ ಯೋಜನೆ ಎಂದರೇನು? ಅದರ ಉದ್ದೇಶಗಳಾವವು?
4) ಭಾಕ್ರಾ–ನಂಗಲ್ ಯೋಜನೆಯನ್ನು ಕುರಿತು ಬರೆಯಿರಿ.
5) ಕರ್ನಾಟಕ ಜಲವಿದ್ಯುತ್ ಉತ್ಪಾದನಾ ಕೇಂದ್ರಗಳನ್ನು ಹೆಸರಿಸಿ.
6) ಮಳೆಕೊಯ್ಲು ಅಥವಾ ಮಳೆ ನೀರಿನ ಸಂಗ್ರಹಣೆ ಇಂದು ಕಡ್ಡಾಯವಾಗಿದೆ. ಏಕೆ ?
7) ರಾಷ್ಟ್ರೀಯ ವಿದ್ಯುತ್ ಜಾಲ ಎಂದರೇನು?

**III. 'ಅ' ಪಟ್ಟಿಯಲ್ಲಿರುವ ನೀರಾವರಿ ಯೋಜನೆಗಳನ್ನು 'ಬ' ಪಟ್ಟಿಯಲ್ಲಿರುವ ರಾಜ್ಯಗಳೊಂದಿಗೆ ಹೊಂದಿಸಿ ಬರೆಯಿರಿ.**

| ಅ | ಬ |
|---|---|
| 1) ಭಾಕ್ರಾ ನಂಗಲ್ ಯೋಜನೆ | ಎ) ಒಡಿಶಾ |
| 2) ತುಂಗಭದ್ರಾ ಯೋಜನೆ | ಬಿ) ಹಿಮಾಚಲ ಪ್ರದೇಶ |
| 3) ಹಿರಾಕುಡ್ ಯೋಜನೆ | ಸಿ) ಕರ್ನಾಟಕ |
| 4) ಕೋಸಿ ಯೋಜನೆ | ಡಿ) ಬಿಹಾರ |
| | ಇ) ಮಧ್ಯಪ್ರದೇಶ. |

@KTBS NOT TO BE REPUBLISHED

**IV. ಚಟುವಟಿಕೆಗಳು :**

1) ಭಾರತದ ಪ್ರಮುಖ ವಿವಿದೋದ್ಧೇಶ ನದಿ ಕಣಿವೆ ಯೋಜನೆಗಳ ಉಪಯೋಗಗಳನ್ನು ಪಟ್ಟಿ ಮಾಡಿರಿ.
2) ನಿಮ್ಮ ಹತ್ತಿರದ ಮನೆಯಲ್ಲಿ ಅಳವಡಿಸಿರುವ ಮಳೆಕೊಯ್ಲು ವಿಧಾನವನ್ನು ಅಳವಡಿಸಿಕೊಂಡಿರುವ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ, ಹೆಚ್ಚಿನ ಮಾಹಿತಿ ಪಡೆಯಿರಿ.

**V. ಯೋಜನೆಗಳು :**

1) ನಿಮ್ಮ ಸುತ್ತಲಿನ ಪ್ರದೇಶಗಳ ವಿವಿಧ ನೀರಾವರಿ ಪದ್ಧತಿ ಪಟ್ಟಿ ಮಾಡಿ, ಅವುಗಳ ಬಳಕೆಯನ್ನು ತಿಳಿದುಕೊಳ್ಳಿ.
2) ನೀವು ನೋಡಿರುವ ಯಾವುದಾದರೂ ಒಂದು ನೀರಾವರಿ ಯೋಜನೆಯ ಬಗ್ಗೆ ವರದಿ ಸಿದ್ಧಪಡಿಸಿ.

# ಅರ್ಥಶಾಸ್ತ್ರ

## ಅಧ್ಯಾಯ – 15

## ಅರ್ಥವ್ಯವಸ್ಥೆ ಮತ್ತು ಸರಕಾರ

V7H7J6

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಅರ್ಥವ್ಯವಸ್ಥೆ ಮತ್ತು ಸರಕಾರದ ನಡುವಿನ ಸಂಬಂಧ
- ಭಾರತದಲ್ಲಿ ಯೋಜನೆ.
- ಭಾರತದಲ್ಲಿ ಪಂಚವಾರ್ಷಿಕ ಯೋಜನೆಗಳು ಮತ್ತು ಸಾಧನೆಗಳು.
- ಹಸಿರು ಕ್ರಾಂತಿ.

ಮಾನವನ ಎಲ್ಲ ಆರ್ಥಿಕ ಚಟುವಟಿಕೆಗಳ ಒಂದು ಸಂಘಟಿತ ವ್ಯವಸ್ಥೆಯೇ ಅರ್ಥವ್ಯವಸ್ಥೆ. ಅರ್ಥವ್ಯವಸ್ಥೆಯ ಮೂಲ ಗುರಿ ಮಾನವನ ಕ್ಷೇಮಾಭಿವೃದ್ಧಿ. ಸರಕಾರವೂ ಸಹ ಮಾನವನ ಕ್ಷೇಮಾಭ್ಯುದಯದ ದೃಷ್ಟಿಯಿಂದ ಕಾರ್ಯನಿರ್ವಹಿಸುತ್ತದೆ. ಹಾಗಾದರೆ ಮಾನವನ ಆರ್ಥಿಕ ಚಟುವಟಿಕೆಗಳಲ್ಲಿ ಸರಕಾರದ ಮಧ್ಯಪ್ರವೇಶ ಇರಬೇಕೆ? ಆರ್ಥಿಕಾಭಿವೃದ್ಧಿಯಲ್ಲಿ ಸರಕಾರದ ಪಾತ್ರವೇನು? ಎಂಬ ಪ್ರಶ್ನೆಗಳು ಉಂಟಾಗುತ್ತವೆ.

19 ನೆಯ ಶತಮಾನದ ಅಂತ್ಯದವರೆಗೆ ಮಾನವನ ಆರ್ಥಿಕ ಚಟುವಟಿಕೆಗಳಲ್ಲಿ ಸರಕಾರದ ಮಧ್ಯಪ್ರವೇಶ ಇರಬಾರದು ಎಂದು ಅಂದಿನ ಹಲವು ಅರ್ಥಶಾಸ್ತ್ರಜ್ಞರ ಅಭಿಪ್ರಾಯವಾಗಿತ್ತು. ಆಗ ಸರಕಾರಗಳು ಕೇವಲ ರಾಷ್ಟ್ರರಕ್ಷಣೆ, ನ್ಯಾಯನಿರ್ಣಯ ಮತ್ತು ಶಾಂತಿ–ಸುವ್ಯವಸ್ಥೆ ಪಾಲನೆ ಮುಂತಾದ ಮೂಲಭೂತ ಕಾರ್ಯಗಳನ್ನಷ್ಟೇ ನಿರ್ವಹಿಸುತ್ತಿದ್ದವು. ಆದರೆ 20 ನೆಯ ಶತಮಾನದಲ್ಲಿ 'ಕಲ್ಯಾಣ ರಾಜ್ಯ'ಗಳ ಉದಯದೊಂದಿಗೆ ಸರಕಾರಗಳ ಕಾರ್ಯಕ್ಷೇತ್ರ ವಿಸ್ತರಣೆಯಾಯಿತು. ಸರಕಾರಗಳು ಎಲ್ಲ ಪ್ರಜೆಗಳಿಗೆ ಆಹಾರ, ಬಟ್ಟೆ, ವಸತಿ, ಶಿಕ್ಷಣ, ಆರೋಗ್ಯ, ನೈರ್ಮಲ್ಯ, ಸಾರಿಗೆ, ಸಂಪರ್ಕ ಮುಂತಾದ ಹಲವು ಸೌಕರ್ಯಗಳನ್ನು ಒದಗಿಸಿಕೊಡಲು ಮುಂದಾದವು. ಹಾಗಾಗಿ ಸರಕಾರವು ಜನರ ಆರ್ಥಿಕ ಚಟುವಟಿಕೆಗಳಲ್ಲಿ ಮಧ್ಯಪ್ರವೇಶಿಸಲು ಮುಂದಾಯಿತು. ಆರ್ಥಿಕ ಅಭಿವೃದ್ಧಿಯ ಪ್ರಕ್ರಿಯೆಯಲ್ಲಿ ಸರಕಾರದ ಪಾತ್ರ ಹೆಚ್ಚಿನ ಪ್ರಾಮುಖ್ಯತೆಯನ್ನು ಪಡೆಯಿತು.

ಮುಂದುವರಿಯುತ್ತಿರುವ ದೇಶಗಳಲ್ಲಿ ಸಾಮಾನ್ಯವಾಗಿ ನಿರುದ್ಯೋಗ, ಬಡತನ, ಕೃಷಿಯ ಹಿಂದುಳಿದಿರುವಿಕೆ, ಆದಾಯ ಮತ್ತು ಸಂಪತ್ತಿನ ಅಸಮಾನ ಹಂಚಿಕೆಯಂತಹ ಸಮಸ್ಯೆಗಳು ಕಂಡುಬರುತ್ತಿವೆ. ಮೂಲಭೂತ ಸೌಲಭ್ಯಗಳಾದ ಸಾರಿಗೆ, ಸಂಪರ್ಕ, ವಿದ್ಯುತ್, ಶಿಕ್ಷಣ, ಆರೋಗ್ಯ ಮುಂತಾದ ಕೊರತೆಯನ್ನು ಎದುರಿಸುತ್ತಿವೆ. ಇಂತಹ ಸಮಸ್ಯೆಗಳನ್ನು ಪರಿಹರಿಸಲು ಸರಕಾರದ ಮಧ್ಯಪ್ರವೇಶ ಅನಿವಾರ್ಯವಾಗಿದ್ದು ಕೊರತೆಗಳನ್ನು ಹೋಗಲಾಡಿಸಲು ಶ್ರಮಿಸುತ್ತಿವೆ.

ಅರ್ಥವ್ಯವಸ್ಥೆಯಲ್ಲಿ ರಾಷ್ಟ್ರೀಯ ಆದಾಯ, ಉತ್ಪಾದನೆ, ಉದ್ಯೋಗ, ಹೂಡಿಕೆ, ಬೆಲೆ ಮುಂತಾದುವುಗಳು ನಿರಂತರವಾಗಿ ಏರಿಳಿತಗಳಿಂದ ಕೂಡಿರುತ್ತವೆ. ಇಂತಹ ಏರಿಳಿತಗಳಿಗೆ ಆರ್ಥಿಕ ಏರಿಳಿತಗಳು ಎನ್ನುತ್ತಾರೆ. ಅರ್ಥವ್ಯವಸ್ಥೆಯು ಹೆಚ್ಚಿನ ಏರಿಳಿತಗಳಿಲ್ಲದೆ ಪ್ರಗತಿಯತ್ತ ಸಾಗುವುದನ್ನು ಆರ್ಥಿಕ ಸ್ಥಿರತೆ ಎನ್ನುತ್ತಾರೆ. ಹಾಗೆಯೇ ದೇಶದಲ್ಲಿ ಉತ್ಪಾದನೆಯಾಗುವ ಆದಾಯ ಮತ್ತು ಸಂಪತ್ತು ಬಡವ–ಬಲ್ಲಿದ, ನಗರ–ಗ್ರಾಮೀಣ ಎಂಬ ಯಾವುದೇ ತಾರತಮ್ಯವಿಲ್ಲದೆ ಸಮಾಜದ ಎಲ್ಲ ಜನರಲ್ಲಿ ಆದಷ್ಟು ಸಮಾನವಾಗಿ ಹಂಚಿಕೆಯಾಗಬೇಕಾಗುತ್ತದೆ. ಇದನ್ನೇ ಸಾಮಾಜಿಕ ನ್ಯಾಯ ಎನ್ನುತ್ತಾರೆ. ಆರ್ಥಿಕ ಸ್ಥಿರತೆ ಮತ್ತು ಸಾಮಾಜಿಕ ನ್ಯಾಯದೊಂದಿಗೆ ಆರ್ಥಿಕ ಅಭಿವೃದ್ಧಿಯನ್ನು ಸಾಧಿಸಬೇಕಾದಲ್ಲಿ ಸರಕಾರದ ಪಾತ್ರ ಪ್ರಮುಖವಾದುದು.

©KTBS NOT TO BE REPUBLISHED

20 ನೆಯ ಶತಮಾನದಲ್ಲಿ ಸರಕಾರಗಳು ಶೀಘ್ರ ಆರ್ಥಿಕ ಅಭಿವೃದ್ಧಿಯನ್ನು ಸಾಧಿಸುವ ಪ್ರಮುಖ ತಂತ್ರವಾಗಿ ಆರ್ಥಿಕ ಯೋಜನೆಗಳನ್ನು ಬಳಕೆಗೆ ತಂದವು. 1929 ರಲ್ಲಿ ಸೋವಿಯತ್ ರಷ್ಯಾ ಮೊಟ್ಟಮೊದಲು ಆರ್ಥಿಕ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಶೀಘ್ರ ಆರ್ಥಿಕ ಪ್ರಗತಿಯನ್ನು ಸಾಧಿಸುವಲ್ಲಿ ಯಶಸ್ವಿಯಾಯಿತು. ಎರಡನೆಯ ಮಹಾಯುದ್ಧದ ನಂತರ ವಿಶ್ವದ ಬಹುತೇಕ ದೇಶಗಳ ಸರಕಾರಗಳು ತಮ್ಮ ಆರ್ಥಿಕ ಸಂಕಷ್ಟಗಳಿಂದ ಹೊರಬರಲು ಆರ್ಥಿಕ ಯೋಜನೆಗಳ ಮೊರೆ ಹೋದವು.

### 1. ಭಾರತದಲ್ಲಿ ಯೋಜನೆ (Planning in India) :

ಯೋಜನೆ ಎನ್ನುವುದು ಪ್ರತಿಯೊಬ್ಬ ವ್ಯಕ್ತಿಯ ಬದುಕಿಗೆ ಅವಶ್ಯಕ. ವೈಯಕ್ತಿಕ ಬದುಕಿನಲ್ಲಿ ಯಶಸ್ಸು ಗಳಿಸಬೇಕಾದರೆ ಸಂಪನ್ಮೂಲಗಳನ್ನು ಯೋಜಿತ ರೀತಿಯಲ್ಲಿ ಬಳಸಿಕೊಳ್ಳಬೇಕಾಗುತ್ತದೆ, ಅಲ್ಲವೇ? ವಿದ್ಯಾರ್ಥಿ ತಾನು ಉತ್ತಮ ಜ್ಞಾನ ಪಡೆಯಲು ಹಾಗೂ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಲು ತನ್ನ ದಿನದ ಸಮಯವನ್ನು ವ್ಯವಸ್ಥಿತವಾಗಿ ಬಳಸಿಕೊಳ್ಳಬೇಕಾಗುತ್ತದೆ. ಪ್ರತಿದಿನ ಇಂತಿಷ್ಟು ಗಂಟೆ ಓದಬೇಕು, ಇಂತಿಷ್ಟು ಗಂಟೆ ಆಟವಾಡಬೇಕು, ನಿದ್ದೆ ಮಾಡಬೇಕು ಎಂದು ಯೋಜಿಸಿ, ಅದನ್ನು ಅನುಷ್ಠಾನಕ್ಕೆ ತರಬೇಕಾಗುತ್ತದೆ. ಅದೇ ರೀತಿಯಲ್ಲಿ ದೇಶವು ತನಗೆ ಲಭ್ಯವಿರುವ ಸಂಪನ್ಮೂಲಗಳನ್ನು ವ್ಯವಸ್ಥಿತವಾಗಿ ಬಳಸಿಕೊಂಡು, ಅಗತ್ಯ ಕ್ಷೇತ್ರಗಳನ್ನು ಆಯ್ಕೆ ಮಾಡಿ, ನಿರ್ದಿಷ್ಟ ಅವಧಿಯೊಳಗೆ ಪ್ರಗತಿ ಸಾಧಿಸಲು ಯೋಜನೆ ರೂಪಿಸುತ್ತದೆ.

'ಸರಕಾರವು ಕೆಲವು ನಿರ್ದಿಷ್ಟ ಧ್ಯೇಯೋದ್ದೇಶಗಳೊಂದಿಗೆ, ದೇಶದಲ್ಲಿರುವ ಸಂಪನ್ಮೂಲಗಳನ್ನು ಸಮರ್ಥವಾಗಿ ಬಳಸಿಕೊಂಡು, ಜನರ ಸುಖವನ್ನು ಗರಿಷ್ಠ ಮಟ್ಟಕ್ಕೆ ಹೆಚ್ಚಿಸಲು, ಪ್ರಜ್ಞಾಪೂರ್ವಕವಾಗಿ ಮತ್ತು ವಿವೇಕಯುತವಾಗಿ ಜಾರಿಗೊಳಿಸುವ ಪ್ರಕ್ರಿಯೆಯನ್ನು ಯೋಜನೆ ಎನ್ನುತ್ತೇವೆ'. ಸರಕಾರವು ದೇಶದ ಜನರ ಹಿತದೃಷ್ಟಿಯಿಂದ, ಲಭ್ಯವಿರುವ ಸಂಪನ್ಮೂಲಗಳನ್ನು ಗಮನದಲ್ಲಿಟ್ಟುಕೊಂಡು, ಏನನ್ನು ಉತ್ಪಾದಿಸಬೇಕು? ಎಷ್ಟು ಉತ್ಪಾದಿಸಬೇಕು? ಹಾಗೂ ಉತ್ಪಾದಿಸಿದ್ದನ್ನು ಹೇಗೆ ವಿತರಿಸಬೇಕು? ಎಂಬ ಮಹತ್ವದ ನಿರ್ಧಾರಗಳನ್ನು ಆದ್ಯತೆಯ ಮೇಲೆ ಕೈಗೊಳ್ಳುತ್ತದೆ. ಹೀಗೆ ಆರ್ಥಿಕ ಯೋಜನೆಯು ದೇಶದ ಸಮಗ್ರ ಅಭಿವೃದ್ಧಿಯ ಒಂದು ತಂತ್ರವಾಗಿ ಬಳಕೆಯಾಗುತ್ತಿದೆ.

ಭಾರತದಲ್ಲಿ ಮೊಟ್ಟಮೊದಲು ಆಧುನಿಕ ಯೋಜನೆಯ ಬಗ್ಗೆ ಚಿಂತಿಸಿದವರು ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯನವರು. ಅವರು 1934 ರಲ್ಲಿ 'ಭಾರತಕ್ಕೆ ಯೋಜಿತ ಅರ್ಥವ್ಯವಸ್ಥೆ'(Planned Economy for India) ಎಂಬ ಪುಸ್ತಕವನ್ನು ಪ್ರಕಟಿಸಿ, ಭಾರತದ ಆರ್ಥಿಕ ಅಭಿವೃದ್ಧಿಗೆ ಯೋಜನೆಯ ಅಗತ್ಯವನ್ನು ಒತ್ತಿ ಹೇಳಿದರು. ಹಾಗಾಗಿ ಅವರನ್ನು 'ಭಾರತದ ಆರ್ಥಿಕ ಯೋಜನೆಯ ಪಿತಾಮಹ' ಎಂದು ಕರೆಯಲಾಗುತ್ತಿದೆ.



**ಸರ್ ಎಂ. ವಿಶ್ವೇಶ್ವರಯ್ಯ**

ಸ್ವಾತಂತ್ರ್ಯಾನಂತರ ಭಾರತ ಸರಕಾರವು 1950 ರಲ್ಲಿ 'ರಾಷ್ಟ್ರೀಯ ಯೋಜನಾ ಆಯೋಗ'ವನ್ನು (National Planning Commission) ರಚಿಸಿತು. ಪ್ರಧಾನ ಮಂತ್ರಿಯವರು ಇದರ ಅಧ್ಯಕ್ಷರಾಗಿರುತ್ತಾರೆ. ಇದರ ಮುಖ್ಯ ಉದ್ದೇಶವೆಂದರೆ, ದೇಶದಲ್ಲಿರುವ ನೈಸರ್ಗಿಕ ಹಾಗೂ ಮಾನವ ಸಂಪನ್ಮೂಲ ಮತ್ತು ಬಂಡವಾಳವನ್ನು ನಿಖರವಾಗಿ ಅಂದಾಜು ಮಾಡಿ, ಈ ಸಂಪನ್ಮೂಲಗಳ ಪರಿಣಾಮಕಾರಿ ಬಳಕೆಗೆ ಯೋಜನೆಗಳನ್ನು ತಯಾರಿಸುವುದು. ಭಾರತದಲ್ಲಿ ಯೋಜನೆಯ ಅವಧಿ 5 ವರ್ಷವಾಗಿರುವುದರಿಂದ ಪಂಚವಾರ್ಷಿಕ ಯೋಜನೆ ಎಂದು ಹೆಸರಿಸಲಾಗಿದೆ.

© KTBS NOT TO BE REPUBLISHED

1952 ರಲ್ಲಿ **'ರಾಷ್ಟ್ರೀಯ ಅಭಿವೃದ್ಧಿ ಮಂಡಳಿ' (National Development Council)** ಯನ್ನು ಸ್ಥಾಪಿಸಲಾಗಿದೆ. ಇದರಲ್ಲಿ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳು ಸದಸ್ಯರಾಗಿರುತ್ತಾರೆ. ಇದು ರಾಷ್ಟ್ರೀಯ ಯೋಜನಾ ಆಯೋಗವು ತಯಾರಿಸಿದ ಪಂಚವಾರ್ಷಿಕ ಯೋಜನೆಯ ಕರಡಿಗೆ ಅನುಮೋದನೆ ನೀಡುತ್ತದೆ. ಅಲ್ಲದೆ ಎಲ್ಲ ರಾಜ್ಯಗಳು ಸಮತೋಲನವಾಗಿ ಅಭಿವೃದ್ಧಿಗೊಳ್ಳುವಂತೆ ಗಮನಹರಿಸುತ್ತದೆ.

## 2. ಪಂಚವಾರ್ಷಿಕ ಯೋಜನೆಗಳು (Five Year Plans)

ಭಾರತದಲ್ಲಿ ಮೊಟ್ಟಮೊದಲ ಪಂಚವಾರ್ಷಿಕ ಯೋಜನೆಯು ಏಪ್ರಿಲ್ 1, 1951 ರಲ್ಲಿ ಜಾರಿಗೆ ಬಂದಿತು. ಇಲ್ಲಿಯವರೆಗೆ ಹನ್ನೊಂದು ಪಂಚವಾರ್ಷಿಕ ಯೋಜನೆಗಳು ಮುಕ್ತಾಯಗೊಂಡಿವೆ. ಸದ್ಯದಲ್ಲಿ ಏಪ್ರಿಲ್ 1, 2012 ರಿಂದ 12 ನೆಯ ಪಂಚವಾರ್ಷಿಕ ಯೋಜನೆಯು ಜಾರಿಗೆ ಬಂದಿದ್ದು, ಅದು 2017 ರ ಮಾರ್ಚ್ 31 ರಂದು ಮುಕ್ತಾಯಗೊಳ್ಳಲಿದೆ. ಪ್ರತಿ ಯೋಜನೆಯ ಅವಧಿಯಲ್ಲಿಯೂ ಅದರ ಹಿಂದಿನ ಯೋಜನೆಗಿಂತ ಹೆಚ್ಚಿನ ಬಂಡವಾಳವನ್ನು ಹೂಡಿಕೆ ಮಾಡಲಾಗುತ್ತದೆ.

| ಭಾರತದಲ್ಲಿ ಯೋಜನೆಗಳು | | |
|---|---|---|
| ಯೋಜನೆ | ಯೋಜನಾ ಅವಧಿ | ಸಾರ್ವಜನಿಕ ವಲಯದ ವೆಚ್ಚ (ಕೋಟಿ ರೂ.) |
| 1ನೇ ಯೋಜನೆ | 1951–56 | 1,960 |
| 2ನೇ – " – | 1956–61 | 4,672 |
| 3ನೇ – " – | 1961–66 | 8,577 |
| ವಾರ್ಷಿಕ –"– | 1966–69 | 6,251 |
| 4ನೇಯೋಜನೆ | 1969–74 | 6,160 |
| 5ನೇ – " – | 1974–78 | 42,300 |
| 6ನೇ – " – | 1980–85 | 1,09,953 |
| 7ನೇ – " – | 1985–90 | 2,22,169 |
| ವಾರ್ಷಿಕ –"– | 1990–92 | ––– |
| 8ನೇ – " – | 1992–97 | 4,34,100 |
| 9ನೇ – " – | 1997–02 | 9,41,041 |
| 10ನೇ – " – | 2002–07 | 15,25,639 |
| 11ನೇ – " – | 2007–12 | 36,44,718 |
| 12ನೇ – " – | 2012–17 | 76,69,807 |

ಸರಕಾರವು ಕೆಲವು ನಿರ್ದಿಷ್ಟ ಧ್ಯೇಯೋದ್ದೇಶಗಳೊಂದಿಗೆ ಪಂಚವಾರ್ಷಿಕ ಯೋಜನೆಗಳನ್ನು ಜಾರಿಗೊಳಿಸಿದೆ. ಈ ಉದ್ದೇಶಗಳು ಯೋಜನೆಗಳ ಮಾರ್ಗಸೂಚಿಗಳಾಗಿವೆ. ಭಾರತದ ಅರ್ಥವ್ಯವಸ್ಥೆಯ ಮೂಲ ಸಮಸ್ಯೆ ಬಡತನ. ಅದನ್ನು ಹೋಗಲಾಡಿಸುವ ಸಲುವಾಗಿ ಪಂಚವಾರ್ಷಿಕ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಆದುದರಿಂದ ಭಾರತದಲ್ಲಿ ಆರ್ಥಿಕ ಯೋಜನೆಗಳ ಮೂಲ ಉದ್ದೇಶ ಬಡತನ ನಿರ್ಮೂಲನೆ ಹಾಗೂ ಜನರ ಜೀವನ ಮಟ್ಟವನ್ನು ಸಾಧ್ಯವಾದಷ್ಟು ಗರಿಷ್ಠ ಮಟ್ಟಕ್ಕೆ ಹೆಚ್ಚಿಸುವುದು. ಈ ಮೂಲ ಉದ್ದೇಶದ ಸಾಧನೆಗೆ ಪೂರಕವಾಗಿ ಕೆಲವು ಉದ್ದೇಶಗಳನ್ನು ಸಾಧಿಸಬೇಕಾಗುತ್ತದೆ. ಅವುಗಳೆಂದರೆ;


1. ಉತ್ಪಾದನೆಯನ್ನು ಗರಿಷ್ಠ ಮಟ್ಟಕ್ಕೆ ಹೆಚ್ಚಿಸುವುದು.
2. ಉದ್ಯೋಗವಕಾಶಗಳನ್ನು ಹೆಚ್ಚಿಸುವುದು.
3. ಆರ್ಥಿಕ ಅಸಮಾನತೆಯನ್ನು ಕಡಿಮೆ ಮಾಡುವುದು.
4. ಆರ್ಥಿಕ ಸ್ಥಿರತೆಯನ್ನು ಕಾಯ್ದುಕೊಳ್ಳುವುದು.
5. ಅರ್ಥವ್ಯವಸ್ಥೆಯನ್ನು ಆಧುನೀಕರಣಗೊಳಿಸುವುದು ಇತ್ಯಾದಿ.

©KTBS NOT TO BE REPUBLISHED

**ಪಂಚವಾರ್ಷಿಕ ಯೋಜನೆಗಳ ಸಾಧನೆ :** ಭಾರತದಲ್ಲಿ ಪಂಚವಾರ್ಷಿಕ ಯೋಜನೆಗಳು ಜಾರಿಗೆ ಬಂದು 60 ವರ್ಷಗಳು ಮುಗಿದಿವೆ. ಹನ್ನೊಂದು ಯೋಜನೆಗಳು ಮುಕ್ತಾಯಗೊಂಡಿವೆ. ಈ ಅವಧಿಯಲ್ಲಿ ಯಾವ ಮಟ್ಟದ ಸಾಧನೆಯಾಗಿದೆ? ಅದರ ವಿಫಲತೆಗಳೇನು? ಎಂಬುದನ್ನು ತಿಳಿಯೋಣ.

ಮೊದಲು ರಾಷ್ಟ್ರೀಯ ಆದಾಯದ ಬೆಳವಣಿಗೆಯನ್ನು ಗಮನಿಸೋಣ. ಯೋಜನೆಯ ಪ್ರಾರಂಭದ 20 ವರ್ಷಗಳ ಅವಧಿಯಲ್ಲಿ ನಮ್ಮ ರಾಷ್ಟ್ರೀಯ ಆದಾಯವು ಸರಾಸರಿ ವಾರ್ಷಿಕ ಶೇ.3.5 ರ ದರದಲ್ಲಿ ಹೆಚ್ಚಳವಾದರೆ, ನಂತರದ 20 ವರ್ಷಗಳ ಅವಧಿಯಲ್ಲಿ ಅದು ಶೇ. 5 ರ ದರದಲ್ಲಿ ಹೆಚ್ಚಳವಾಗಿದೆ. 1991–2000 ರ ಅವಧಿಯಲ್ಲಿ ಸರಾಸರಿ ವಾರ್ಷಿಕ ಶೇ.5.6 ರ ದರದಲ್ಲಿ ಹೆಚ್ಚಿದರೆ, 2001–2010 ರ ಅವಧಿಯಲ್ಲಿ ಶೇ.7.3 ರ ದರದಲ್ಲಿ ಹೆಚ್ಚಳವಾಗಿದೆ. ಅಂದರೆ ವರ್ಷಗಳು ಕಳೆದಂತೆ ರಾಷ್ಟ್ರೀಯ ಆದಾಯದ ಬೆಳವಣಿಗೆಯ ವೇಗ ಕ್ರಮೇಣ ಹೆಚ್ಚಿದೆ. ಅದಕ್ಕೆ ತಕ್ಕಂತೆ ತಲಾ ಆದಾಯದ ಬೆಳವಣಿಗೆಯೂ ಹೆಚ್ಚಿದೆ. 2001–2010 ರ ಅವಧಿಯಲ್ಲಿ ತಲಾ ಆದಾಯವು ವಾರ್ಷಿಕ ಸರಾಸರಿ ಶೇ.5.6 ರ ದರದಲ್ಲಿ ಹೆಚ್ಚಿದೆ.

**ಚಟುವಟಿಕೆ :**




**ಮೇಲಿನ ಕಂಬ ಚಿತ್ರವನ್ನು ಗಮನಿಸಿ ಈ ಪ್ರಶ್ನೆಗಳಿಗೆ ಉತ್ತರಿಸಿ.**

1. 1950–51 ರಲ್ಲಿ ರಾಷ್ಟ್ರೀಯ ಆದಾಯಕ್ಕೆ ಅತಿಹೆಚ್ಚು ಕೊಡುಗೆ ನೀಡಿದ ವಲಯ ಯಾವುದು?
2. ಅದೇ ವರ್ಷದಲ್ಲಿ ಅತಿಕಡಿಮೆ ಆದಾಯ ಯಾವ ವಲಯದಿಂದ ಬಂದಿದೆ?
3. 2011–12 ರಲ್ಲಿ ಅತಿ ಹೆಚ್ಚು ಆದಾಯ ಯಾವ ವಲಯದಿಂದ ಬಂದಿದೆ?
4. 2011–12 ರಲ್ಲಿ ಕೃಷಿ ವಲಯದ ಕೊಡುಗೆ ಎಷ್ಟು?

ರಾಷ್ಟ್ರೀಯ ಆದಾಯದ ಬೆಳವಣಿಗೆಯಲ್ಲಿ ಅರ್ಥವ್ಯವಸ್ಥೆಯ ಮೂರೂ ವಲಯಗಳಾದ ಕೃಷಿ, ಕೈಗಾರಿಕೆ ಮತ್ತು ಸೇವಾವಲಯಗಳ ಕೊಡುಗೆ ಇರುತ್ತದೆ. ಯೋಜನೆಯ ಪ್ರಾರಂಭದಲ್ಲಿ ರಾಷ್ಟ್ರೀಯ ಆದಾಯಕ್ಕೆ ಕೃಷಿ ವಲಯದಿಂದ ಶೇ.50 ಕ್ಕಿಂತ ಹೆಚ್ಚಿನ ಆದಾಯ ಬರುತ್ತಿತ್ತು. ಆದರೆ ಈಗ ಈ ವಲಯದ ಪಾಲು ಶೇ. 12 ಆಗಿದೆ. ಸದ್ಯದಲ್ಲಿ ರಾಷ್ಟ್ರೀಯ ಆದಾಯಕ್ಕೆ ಸೇವಾ ವಲಯದಿಂದ ಅತಿಹೆಚ್ಚು ಅಂದರೆ ಶೇ.59 ರಷ್ಟು ಆದಾಯ ಬರುತ್ತಿದೆ.

ಆಹಾರ ಧಾನ್ಯಗಳ ಉತ್ಪಾದನೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸಲಾಗಿದೆ. ಯೋಜನೆಗಳ ಅವಧಿಯಲ್ಲಿ ಆಹಾರ ಧಾನ್ಯಗಳ ಉತ್ಪಾದನೆಯು ಸುಮಾರು ಐದು ಪಟ್ಟು ಹೆಚ್ಚಳವಾಗಿದ್ದು, 2011–12 ರಲ್ಲಿ 257.4 ದಶಲಕ್ಷ ಟನ್ನುಗಳಿಗೆ ಹೆಚ್ಚಿದೆ.

ಕೈಗಾರಿಕೆ ಮತ್ತು ಸೇವಾ ವಲಯಗಳ ವಿಸ್ತರಣೆಯಿಂದ ಉದ್ಯೋಗಾವಕಾಶಗಳು ಹೆಚ್ಚಿವೆ. ಬಡತನ ನಿರ್ಮೂಲನೆ ಹಾಗೂ ಉದ್ಯೋಗ ಸೃಷ್ಟಿ ಕಾರ್ಯಕ್ರಮಗಳನ್ನು ಜಾರಿಗೆ ತರುವ ಮೂಲಕ ಗ್ರಾಮೀಣ ಬಡಜನರಿಗೆ ಉದ್ಯೋಗವಕಾಶಗಳನ್ನು ಒದಗಿಸಿಕೊಡಲು ಪ್ರಯತ್ನಿಸಲಾಗಿದೆ.

©KTBS NOT TO BE REPUBLISHED

| 2007–12 ರ ಅವಧಿಯಲ್ಲಿದ್ದ ಒಟ್ಟು ಉದ್ಯೋಗ ಆಕಾಂಕ್ಷಿಗಳು **8.4 ಕೋಟಿಗಳು** | – | 2007–12 ರ ಅವಧಿಯಲ್ಲಿ ಸೃಷ್ಟಿಯಾದ ಉದ್ಯೋಗಗಳು **5.3 ಕೋಟಿಗಳು** | = | 2007–12ರ ಕೊನೆಯಲ್ಲಿದ್ದ ನಿರುದ್ಯೋಗಿಗಳು **3.1 ಕೋಟಿಗಳು** |
|---|---|---|---|---|

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಅಗಾಧ ಪ್ರಗತಿ ಕಂಡುಬಂದಿದೆ. ಕೃಷಿ, ಕೈಗಾರಿಕೆ ಮತ್ತು ಸೇವಾ ವಲಯಗಳಲ್ಲಿ ಆಧುನಿಕ ತಂತ್ರಜ್ಞಾನದ ಬಳಕೆ ಹೆಚ್ಚುತ್ತಿದೆ. ನಮ್ಮ ತಂತ್ರಜ್ಞರ ಸೇವೆಯನ್ನು ಹೊರ ದೇಶಗಳಿಗೆ ರಫ್ತು ಮಾಡಲಾಗುತ್ತಿದೆ. ಭಾರತದ ರಫ್ತು ಕ್ಷೇತ್ರದಲ್ಲಿ ತಯಾರಿಕಾ ಮತ್ತು ಎಂಜಿನಿಯರಿಂಗ್ ಸರಕುಗಳ ರಫ್ತು ಪ್ರಮಾಣ ಅಗಾಧವಾಗಿ ಹೆಚ್ಚಿದೆ.

ಭಾರತದ ಅರ್ಥವ್ಯವಸ್ಥೆಯಲ್ಲಿ ಹೆಚ್ಚುತ್ತಿರುವ ಅಸಮಾನತೆಯನ್ನು ಕಡಿಮೆಮಾಡಲು, ಅಭಿವೃದ್ಧಿಯ ಪ್ರಕ್ರಿಯೆಯಲ್ಲಿ ಎಲ್ಲ ವರ್ಗದ ಜನರನ್ನು ಸೇರಿಸಿಕೊಳ್ಳುವ ಸಲುವಾಗಿ, ಹನ್ನೊಂದನೆಯ ಪಂಚವಾರ್ಷಿಕ ಯೋಜನೆಯಲ್ಲಿ 'ಎಲ್ಲರನ್ನು ಒಳಗೊಂಡ ಬೆಳವಣಿಗೆಗೆ' (Inclusive Growth) ಪ್ರಾಮುಖ್ಯತೆ ನೀಡಲಾಯಿತು.

ಅಭಿವೃದ್ಧಿಯ ಇತರೆ ಮಾನದಂಡಗಳನ್ನು ಗಮನಿಸಿದಾಗ ಬಹಳಷ್ಟು ಸುಧಾರಣೆ ಕಂಡುಬರುತ್ತಿದೆ. ಜನರ ನಿರೀಕ್ಷಿತ ಜೀವಿತಾವಧಿ ಮತ್ತು ಸಾಕ್ಷರತಾ ಪ್ರಮಾಣ ಹೆಚ್ಚುತ್ತಿದೆ. ಶಿಶು ಮರಣ ಮತ್ತು ತಾಯಂದಿರ ಮರಣದರಗಳು ಕಡಿಮೆಯಾಗುತ್ತಿವೆ. ಜನನ ಮತ್ತು ಮರಣ ದರಗಳೆರಡೂ ಕಡಿಮೆಯಾಗುತ್ತಿದ್ದು, ಜನಸಂಖ್ಯಾ ಬೆಳವಣಿಗೆ ದರ ಇಳಿಕೆಯಾಗುತ್ತಿದೆ.

ಇಷ್ಟಾದರೂ ಪಂಚವಾರ್ಷಿಕ ಯೋಜನೆಗಳು ದುಡಿಯಲು ಸಮರ್ಥರಿರುವ ಎಲ್ಲ ಜನರಿಗೂ ಉದ್ಯೋಗ ಒದಗಿಸುವಲ್ಲಿ ವಿಫಲವಾಗಿವೆ. ಬಡತನದ ಪ್ರಮಾಣ ಕಡಿಮೆಯಾಗಿದ್ದರೂ, ಅದನ್ನು ಸಂಪೂರ್ಣವಾಗಿ ಹೋಗಲಾಡಿಸಲಾಗಿಲ್ಲ. ಬಡವ ಮತ್ತು ಶ್ರೀಮಂತರ ನಡುವಿನ ಅಸಮಾನತೆ ದಿನೇ ದಿನೇ ಹೆಚ್ಚುತ್ತಿದ್ದು, ಸಾಮಾಜಿಕ ನ್ಯಾಯ ಕನಸಿನ ಮಾತಾಗಿದೆ. ಮೂಲ ಸೌಕರ್ಯಗಳ ಕೊರತೆ ಹೆಚ್ಚಾಗಿದೆ.

### 3. ಹಸಿರು ಕ್ರಾಂತಿ (Green Revolution)

ಪಂಚವಾರ್ಷಿಕ ಯೋಜನೆಗಳ ಅತಿ ದೊಡ್ಡ ಸಾಧನೆಯೆಂದರೆ 'ಹಸಿರು ಕ್ರಾಂತಿ'. 'ಕ್ರಾಂತಿ' ಎಂದರೆ 'ಶೀಘ್ರ ಬದಲಾವಣೆ ಅಥವಾ ಪ್ರಗತಿ' ಎಂದರ್ಥ. 1967–70 ರ ಅವಧಿಯಲ್ಲಿ ಭಾರತದ ಆಹಾರ ಧಾನ್ಯಗಳ ಉತ್ಪಾದನೆಯಲ್ಲಿ ಆದಂತಹ ಶೀಘ್ರ ಪ್ರಗತಿಯನ್ನು 'ಹಸಿರು ಕ್ರಾಂತಿ' ಎಂದು ಗುರುತಿಸಲಾಗುತ್ತಿದೆ. 1967 ರಲ್ಲಿ 74 ದಶಲಕ್ಷ ಟನ್ನುಗಳಷ್ಟಿದ್ದ ಆಹಾರ ಧಾನ್ಯಗಳ ಉತ್ಪಾದನೆಯು 1970 ರ ವೇಳೆಗೆ 108 ದಶಲಕ್ಷ ಟನ್ನುಗಳಿಗೆ ಹೆಚ್ಚಳವಾಯಿತು. ಕೇವಲ ಮೂರು ವರ್ಷಗಳ ಅವಧಿಯಲ್ಲಿ ಆಹಾರ ಧಾನ್ಯಗಳ ಉತ್ಪಾದನೆಯು ಅಗಾಧ ಪ್ರಮಾಣದಲ್ಲಿ ಹೆಚ್ಚಳವಾಯಿತು. ಇದು ಹಸಿರು ಬೆಳೆಗಳಲ್ಲಾದ ಪ್ರಗತಿಯಾದುದರಿಂದ ಇದಕ್ಕೆ ಹಸಿರು ಕ್ರಾಂತಿ ಎಂದು ಹೆಸರಿಸಲಾಗಿದೆ.

ಹಸಿರು ಕ್ರಾಂತಿಯು 'ಹೆಚ್ಚು ಇಳುವರಿ ಬೀಜ'ಗಳ ಬಳಕೆಯ ಪರಿಣಾಮವಾಗಿದೆ. 1960ರ ಪ್ರಾರಂಭದಲ್ಲಿ **ಡಾ. ನಾರ್ಮನ್ ಬೋರ್ಲಾಗ್** ಎಂಬ ಜರ್ಮನ್ ಕೃಷಿ ವಿಜ್ಞಾನಿ ಮೆಕ್ಸಿಕೋ ದೇಶದಲ್ಲಿ ನಡೆಸಿದ ಪ್ರಯೋಗದ ಫಲವಾಗಿ ಗೋಧಿಯಲ್ಲಿ ಹೆಚ್ಚು ಇಳುವರಿ ಬೀಜಗಳ ಸಂಶೋಧನೆಯಾಯಿತು.

© KTBS NOT TO BE REPUBLISHED

ಈ ಬೀಜಗಳನ್ನು ಬಳಕೆಗೆ ತಂದ ಮೆಕ್ಸಿಕೋ ಮತ್ತು ತೈವಾನ್ ದೇಶಗಳು ಗೋಧಿಯ ಉತ್ಪಾದನೆಯಲ್ಲಿ ಅತಿಹೆಚ್ಚಿನ ಪ್ರಗತಿಯನ್ನು ಸಾಧಿಸಿದವು.



ಡಾ. ಎಂ.ಎಸ್. ಸ್ವಾಮಿನಾಥನ್

1965–66 ರ ಅವಧಿಯಲ್ಲಿ ಭಾರತದಲ್ಲಿ ಸಂಭವಿಸಿದ ಭೀಕರ ಬರಗಾಲದ ಪರಿಣಾಮವಾಗಿ ಕೃಷಿ ಉತ್ಪಾದನೆ ಅತ್ಯಂತ ಕಡಿಮೆಯಾಯಿತು. ಆಹಾರ ಧಾನ್ಯಗಳ ಕೊರತೆ ಅಗಾಧವಾಗಿ ಹೆಚ್ಚಿತು. ಈ ಸಮಸ್ಯೆಗೆ ಪರಿಹಾರವೆಂಬಂತೆ ಭಾರತ ಸರಕಾರವು 1966 ರಲ್ಲಿ ಗೋಧಿಯ ಹೆಚ್ಚು ಇಳುವರಿ ಬೀಜಗಳನ್ನು ಪಂಜಾಬ್, ಹರಿಯಾಣ, ದೆಹಲಿ, ರಾಜಸ್ಥಾನ ಮತ್ತು ಉತ್ತರ ಪ್ರದೇಶದ ಆಯ್ದ ಜಿಲ್ಲೆಗಳಲ್ಲಿ ಬಳಕೆಗೆ ತಂದಿತು. ಹೆಚ್ಚು ಇಳುವರಿ ಬೀಜಗಳ ಬಳಕೆಯು ನಿಗದಿತ ಪೋಷಕಾಂಶಗಳು, ನಿಯಮಿತವಾದ ನೀರು ಮತ್ತು ರೋಗಗಳಿಂದ ರಕ್ಷಣೆಯನ್ನು ಅಪೇಕ್ಷಿಸುತ್ತವೆ. ಆದುದರಿಂದ ಹೆಚ್ಚು ಇಳುವರಿ ಬೀಜಗಳ ಬಳಕೆಯ ಜೊತೆಗೆ ರಾಸಾಯನಿಕ ಗೊಬ್ಬರ, ಕ್ರಿಮಿನಾಶಕಗಳನ್ನು ಬಳಕೆಗೆ ತರಲಾಯಿತು. ನೀರಾವರಿ ಸೌಲಭ್ಯಗಳನ್ನು ವಿಸ್ತರಿಸಲಾಯಿತು. ಇದರಿಂದ ಗೋಧಿಯ ಉತ್ಪಾದನೆ ಅಗಾಧವಾಗಿ ಹೆಚ್ಚಿತು. ಕೃಷಿ ಉತ್ಪಾದನೆಯಲ್ಲಿ ಬಳಸಲಾದ ಈ ಸುಧಾರಿತ ತಂತ್ರಜ್ಞಾನವನ್ನು 'ಸುಗ್ಗಿ ಪೂರ್ವ ತಂತ್ರಜ್ಞಾನ' (Pre-harvest Technology) ಎನ್ನುತ್ತಾರೆ. ಭಾರತದ ಕೃಷಿಯಲ್ಲಿ ಸುಧಾರಿತ ತಂತ್ರಜ್ಞಾನವನ್ನು ಬಳಕೆಗೆ ತರುವಲ್ಲಿ ಕೃಷಿ ವಿಜ್ಞಾನಿ ಡಾ. ಎಂ.ಎಸ್. ಸ್ವಾಮಿನಾಥನ್‌ರವರ ಪಾತ್ರ ಪ್ರಮುಖವಾದುದು. ಹಾಗಾಗಿ ಇವರು ಭಾರತದ 'ಹಸಿರು ಕ್ರಾಂತಿಯ ಪಿತಾಮಹ' ಎನಿಸಿದ್ದಾರೆ.

ಹಸಿರು ಕ್ರಾಂತಿಯ ಪ್ರಾರಂಭದಲ್ಲಿ ಸುಧಾರಿತ ತಂತ್ರಜ್ಞಾನವನ್ನು ಗೋಧಿ ಬೆಳೆಯಲ್ಲಿ ಮಾತ್ರ ಬಳಸಲಾಯಿತು. ಅದರ ಯಶಸ್ಸಿನಿಂದ ಪ್ರೇರಿತವಾದ ಸರಕಾರವು ಭತ್ತ, ಜೋಳ, ರಾಗಿ, ಕಬ್ಬು ಮುಂತಾದ ಬೆಳೆಗಳಲ್ಲಿಯೂ ಹೆಚ್ಚು ಇಳುವರಿ ಬೀಜಗಳನ್ನು ಬಳಸಲು ಪ್ರೇರಣೆ ನೀಡಿತು. ಸುಧಾರಿತ ತಂತ್ರಜ್ಞಾನವನ್ನು ಎಲ್ಲ ಬೆಳೆಗಳಲ್ಲೂ ಬಳಸಲು ಪ್ರಯತ್ನಿಸಲಾಯಿತು. ಜೊತೆಗೆ ಇದನ್ನು ದೇಶಾದ್ಯಂತ ವಿಸ್ತರಣೆಗೆ ಕ್ರಮ ಕೈಗೊಳ್ಳಲಾಯಿತು. ಇದರಿಂದ ಕೃಷಿ ಉತ್ಪಾದನೆಯಲ್ಲಿ ಅಗಾಧ ಪ್ರಗತಿ ಸಾಧ್ಯವಾಯಿತು. 80 ರ ದಶಕದ ವೇಳೆಗೆ ಭಾರತವು ಆಹಾರ ಧಾನ್ಯಗಳ ಉತ್ಪಾದನೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸಿತು.

ಹಸಿರು ಕ್ರಾಂತಿಯ ಲಾಭ ಕೇವಲ ದೊಡ್ಡ ಹಾಗೂ ಶ್ರೀಮಂತ ರೈತರಿಗೆ ಮಾತ್ರ ತಲುಪಿದೆ ಬಡ ರೈತರಿಗೆ ಇದರ ಲಾಭ ತಲುಪಿಲ್ಲ ಎಂಬ ಕೂಗು ಎಲ್ಲೆಡೆ ಕೇಳಲಾರಂಭಿಸಿತು. ಏಕೆಂದರೆ ಸುಧಾರಿತ ಬೀಜ, ರಾಸಾಯನಿಕ ಗೊಬ್ಬರ, ಕ್ರಿಮಿನಾಶಕ ಮುಂತಾದುವುಗಳನ್ನು ಕೊಳ್ಳುವ ಶಕ್ತಿ ಬಡ ರೈತರಿಗೆ ಇರಲಿಲ್ಲ. ಈ ತಾರತಮ್ಯವನ್ನು ಹೋಗಲಾಡಿಸುವುದು ಅವಶ್ಯಕವಾಗಿದೆ. ಆಗ ಸರಕಾರವು ಸಣ್ಣ ಮತ್ತು ಬಡ ರೈತರಿಗೂ ಸುಧಾರಿತ ತಂತ್ರಜ್ಞಾನದ ಲಾಭ ದೊರೆಯುವಂತೆ ಮಾಡಲು 'ಸಹಾಯ ಧನ' ವ್ಯವಸ್ಥೆಯನ್ನು ಜಾರಿಗೊಳಿಸಿತು. ಸರಕಾರವು ಹೆಚ್ಚಿನ ಸಹಾಯಧನದೊಂದಿಗೆ ಬೀಜ, ಗೊಬ್ಬರ, ಕ್ರಿಮಿನಾಶಕ, ಯಂತ್ರೋಪಕರಣಗಳು ಮುಂತಾದುವುಗಳನ್ನು ಅತ್ಯಂತ ಕಡಿಮೆ ಬೆಲೆಯಲ್ಲಿ ವಿತರಿಸಲು ಮುಂದಾಯಿತು. ಅಲ್ಲದೆ ರೈತರಿಗೆ ಬ್ಯಾಂಕುಗಳು ಮತ್ತು ಸಹಕಾರಿ ಸಂಘಗಳ ಮೂಲಕ ಕಡಿಮೆ ಬಡ್ಡಿದರದಲ್ಲಿ ಸಾಲ ಒದಗಿಸಲು ಮುಂದಾಯಿತು. ಇದರಿಂದ ಸುಧಾರಿತ ಕೃಷಿ ವಿಧಾನಗಳನ್ನು ಎಲ್ಲ ವರ್ಗದ ರೈತರು ಬಳಸಲು ಸಾಧ್ಯವಾಯಿತು. ಕೃಷಿ ಉತ್ಪಾದನೆ ಹೆಚ್ಚಿತು.

**ಚಟುವಟಿಕೆ :**

ಕೃಷಿ ಉತ್ಪನ್ನಗಳಿಗೆ ಬೆಂಬಲಗಳಿಗೆ ನೀಡುತ್ತಿರುವ ಬೆಲೆ ಬಗ್ಗೆ ಶಿಕ್ಷಕರೊಂದಿಗೆ ಚರ್ಚಿಸಿ ಮತ್ತು ರೈತರೊಂದಿಗೆ ಸಂವಾದ ನಡೆಸಿರಿ.

© KTBS NOT TO BE REPUBLISHED

**ನಿಮಗಿದು ತಿಳಿದಿರಲಿ :**

**ಕಾಮನ ಬಿಲ್ಲು ಕ್ರಾಂತಿ**

ರೈತರು ಕೃಷಿಯು ಜೊತೆಗೆ ಪಶುಪಾಲನೆ, ಕೋಳಿಸಾಕಣೆ, ಮೀನುಗಾರಿಕೆ, ರೇಷ್ಮೆಗಾರಿಕೆ ಮುಂತಾದ ಕೃಷಿ ಸಂಬಂಧಿತ ಚಟುವಟಿಕೆಗಳನ್ನು ಕೈಗೊಳ್ಳುತ್ತಿದ್ದಾರೆ. ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳ ಉತ್ಪಾದನೆಯಲ್ಲಿ ಆದಂತಹ ಅಗಾಧ ಹೆಚ್ಚಳವನ್ನು ಕಾಮನಬಿಲ್ಲು ಕ್ರಾಂತಿ ಎಂದು ಕರೆಯಲಾಗುತ್ತಿದೆ. ಕಾಮನ ಬಿಲ್ಲು ಕ್ರಾಂತಿಯು ಹಲವು ಕ್ರಾಂತಿಗಳನ್ನು ಒಳಗೊಂಡಿದೆ. ಅವುಗಳು ಯಾವುದರ ಪ್ರಗತಿಗೆ ಸಂಬಂಧಿಸಿವೆ ಎಂಬುದನ್ನು ತಿಳಿಯಿರಿ.

1. ಹಸಿರು ಕ್ರಾಂತಿ – ಆಹಾರ ಧಾನ್ಯಗಳ ಉತ್ಪಾದನೆ
2. ನೀಲಿ ಕ್ರಾಂತಿ – ಮೀನುಗಳ ಉತ್ಪಾದನೆ
3. ಹಳದಿ ಕ್ರಾಂತಿ – ಎಣ್ಣೆ ಬೀಜಗಳ ಉತ್ಪಾದನೆ
4. ಬಿಳಿ ಕ್ರಾಂತಿ – ಹಾಲು ಉತ್ಪಾದನೆ
5. ಬೆಳ್ಳಿ ಕ್ರಾಂತಿ – ಮೊಟ್ಟೆಗಳ ಉತ್ಪಾದನೆ
6. ಬಂಗಾರ ಕ್ರಾಂತಿ– ಹಣ್ಣು / ಹೂಗಳ ಉತ್ಪಾದನೆ
7. ಕೆಂಪು ಕ್ರಾಂತಿ – ಮಾಂಸದ ಉತ್ಪಾದನೆ

ಕೃಷಿ ಉತ್ಪಾದನೆಯ ಹೆಚ್ಚಳದಿಂದ ಕೃಷಿ ವಸ್ತುಗಳ ಬೆಲೆಗಳು ಇಳಿಕೆಯಾಗಿ, ರೈತರಿಗೆ ನಷ್ಟವಾಗುವ ಆತಂಕ ಸೃಷ್ಟಿಯಾಯಿತು. ರೈತರ ಉತ್ಪನ್ನಗಳಿಗೆ ನ್ಯಾಯೋಚಿತ ಬೆಲೆ ದೊರಕಿಸಿಕೊಡಬೇಕಾದ ಅನಿವಾರ್ಯತೆ ಉಂಟಾಯಿತು. ರೈತರ ಉತ್ಪನ್ನಗಳಿಗೆ ಉತ್ತಮ ಬೆಲೆ ದೊರಕಿಸಿಕೊಡುವ ಸಲುವಾಗಿ ಕೃಷಿ ಮಾರುಕಟ್ಟೆಗಳನ್ನು ಸುಧಾರಿಸಬೇಕಾಯಿತು. ಹೆಚ್ಚುವರಿ ಉತ್ಪನ್ನಗಳನ್ನು ಸಂಸ್ಕರಿಸಿ ಅವುಗಳಿಂದ ವಿವಿಧ ಉತ್ಪನ್ನಗಳನ್ನು ತಯಾರಿಸಲು ಕ್ರಮ ಕೈಗೊಳ್ಳಬೇಕಾಯಿತು. ಹೆಚ್ಚುವರಿ ಉತ್ಪನ್ನಗಳನ್ನು ಕೆಡದಂತೆ ಸಂಗ್ರಹಿಸಲು ಉಗ್ರಾಣಗಳು ಮತ್ತು ಶೈತ್ಯಾಗಾರಗಳನ್ನು ನಿರ್ಮಿಸುವ ಅವಶ್ಯಕತೆ ಉಂಟಾಯಿತು. ಹೀಗೆ ಕೃಷಿ ಉತ್ಪನ್ನಗಳ ಸಂಗ್ರಹಣೆ, ಸಂಸ್ಕರಣೆ ಮತ್ತು ಮಾರಾಟದಲ್ಲಿ ಬಳಕೆಗೆ ತರಲಾದ ಸುಧಾರಿತ ತಂತ್ರಜ್ಞಾನವನ್ನು **'ಸುಗ್ಗಿ ನಂತರದ ತಂತ್ರಜ್ಞಾನ' (Post-harvest Technology)** ಎಂದು ಕರೆಯುತ್ತಾರೆ. ಹಸಿರು ಕ್ರಾಂತಿಗೆ ಸುಗ್ಗಿ ಪೂರ್ವ ಮತ್ತು ಸುಗ್ಗಿ ನಂತರದ ತಂತ್ರಜ್ಞಾನಗಳೆರಡೂ ಪ್ರೇರಕ ಅಂಶಗಳಾಗಿವೆ.

@KTBS NOT TO BE REPUBLISHED

ಕೃಷಿ ವಲಯವು ಸದ್ಯದಲ್ಲಿ ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರವೆಂಬಂತೆ ಸರಕಾರವು ರೈತರಿಗೆ ಸಾವಯವ ಕೃಷಿ ವಿಧಾನವನ್ನು ಬಳಸುವಂತೆ ಪ್ರೋತ್ಸಾಹಿಸುತ್ತಿದೆ. ರಾಸಾಯನಿಕ ಗೊಬ್ಬರಗಳಿಗೆ ಬದಲಾಗಿ ಜೈವಿಕ ಗೊಬ್ಬರ, ರಾಸಾಯನಿಕ ಕ್ರಿಮಿನಾಶಕಗಳಿಗೆ ಬದಲಾಗಿ ಜೈವಿಕ ಕ್ರಿಮಿನಾಶಕಗಳ ಬಳಕೆಗೆ ಪ್ರೋತ್ಸಾಹಿಸಲಾಗುತ್ತಿದೆ. ಹೀಗೆ ಕೃಷಿಯಲ್ಲಿ ಎಲ್ಲ ರೀತಿಯ ಪರಸರ ಸ್ನೇಹಿ ತಂತ್ರಗಳನ್ನು ಬಳಸುವ ಮೂಲಕ ಕೃಷಿ ಉತ್ಪಾದನೆಯನ್ನು ದ್ವಿಗುಣಗೊಳಿಸಲು ಪ್ರಯತ್ನಿಸಲಾಗುತ್ತಿದೆ. ಇದನ್ನು 'ಎರಡನೇ ಹಸಿರು ಕ್ರಾಂತಿ' ಅಥವಾ 'ಸದಾ ಹಸಿರು ಕ್ರಾಂತಿ' ಎಂದು ಗುರುತಿಸಲಾಗುತ್ತಿದೆ. ಕೆಲವು ಉತ್ಸಾಹಿ ರೈತರು ಸಾವಯವ ಕೃಷಿ, ಶೂನ್ಯ ಬಂಡವಾಳ ಕೃಷಿ ಮುಂತಾದ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಕೃಷಿ ವಿಧಾನಗಳನ್ನು ಅಳವಡಿಸಿಕೊಂಡು ಅನುಕೂಲ ಪಡೆಯುತ್ತಿದ್ದಾರೆ.

## ನೀತಿ ಆಯೋಗ

ಭಾರತದ ಬದಲಾವಣೆಗಾಗಿನ ರಾಷ್ಟ್ರೀಯ ಸಂಸ್ಥೆಯನ್ನು ಭಾರತದ ಯೋಜನಾ ಆಯೋಗದ ಬದಲಿಗೆ ಜನವರಿ 1, 2015 ರಲ್ಲಿ ಸ್ಥಾಪಿಸಲಾಗಿದೆ.

ನೀತಿ ಆಯೋಗವು ತಳಮಟ್ಟದ ಮಾರ್ಗವನ್ನು ಉಪಯೋಗಿಸುತ್ತದೆ. ಅದರ ಧ್ಯೇಯಗಳು 15 ವರ್ಷಗಳ ಮಾರ್ಗ ನಕ್ಷೆ, 7 ವರ್ಷಗಳ ದೂರದರ್ಶಿತ್ವ ಯೋಜನೆ ಮತ್ತು ಕಾರ್ಯ ಯೋಜನೆಯನ್ನು ಒಳಗೊಂಡಿರುವುದು. ದೇಶದ ಪ್ರಧಾನಮಂತ್ರಿಯವರು ಇದರ ನೇತೃತ್ವ ವಹಿಸಿದ್ದಾರೆ. ಆದರೆ ದಿನವಹಿ ಆಡಳಿತವನ್ನು ಉಪಾಧ್ಯಕ್ಷರು ನೆರವೇರಿಸುತ್ತಾರೆ.

**ಧ್ಯೇಯೋದ್ದೇಶಗಳು :**

1) ಭಾರತ ಸರಕಾರದ ಅತ್ಯುನ್ನತ ಸಾರ್ವಜನಿಕ ನೀತಿ ಚಿಂತಕರ ಛಾವಡಿಯಾಗಿ ಕಾರ್ಯ ನಿರ್ವಹಿಸುವುದು ಮತ್ತು ಆರ್ಥಿಕ ಅಭಿವೃದ್ಧಿಯನ್ನು ವೇಗಗೊಳಿಸುವ ಕಾರ್ಯವನ್ನು ನೋಡಲ್ ಏಜೆನ್ಸಿಯಾಗಿ ಕಾರ್ಯ ನಿರ್ವಹಿಸುವುದು.

2) ಕೆಳಮಟ್ಟದಿಂದ ಸಂಪನ್ಮೂಲಗಳನ್ನು ಬಳಸಿಕೊಂಡು ಆರ್ಥಿಕ ನೀತಿ ನಿರ್ಮಾಣ ಪ್ರಕ್ರಿಯೆಯಲ್ಲಿ ಭಾರತದ ರಾಜ್ಯ ಸರಕಾರಗಳ ಒಳಗೊಳ್ಳುವಿಕೆಯ ಮೂಲಕ ಸಹಕಾರಿ ಫೆಡರಲಿಸಂನ್ನು ಉತ್ತೇಜಿಸುತ್ತದೆ.

**ಲಕ್ಷಣಗಳು:** ನೀತಿ ಆಯೋಗವು ವೇಗದಿಂದ ಕಾರ್ಯ ನಿರ್ವಹಿಸಲು ಸಂಶೋಧನೆ ಮತ್ತು ನಾವಿನ್ಯ ಉತ್ತೇಜಿಸಲು ಸರಕಾರಕ್ಕೆ ವ್ಯೂಹಾತ್ಮಕ ನೀತಿ ದೃಷ್ಟಿಕೋನವನ್ನು ಒದಗಿಸಲು ಮತ್ತು ಅನಿಯಂತ್ರಿತ ಸಮಸ್ಯೆಗಳನ್ನು ನಿಭಾಯಿಸಲು ಅನುವು ಮಾಡಿಕೊಡುವ ಅಗತ್ಯ ಜ್ಞಾನ ಮತ್ತು ಕೌಶಲ್ಯಗಳೊಂದಿಗೆ ಕಲಾ ಸಂಪನ್ಮೂಲ ಕೇಂದ್ರವಾಗಿ ತನ್ನನ್ನು ತಾನು ಅಭಿವೃದ್ಧಿ ಪಡಿಸುತ್ತದೆ. ಅಟಲ್ ನಾವಿನ್ಯ ಮಿಷನ್ ಮತ್ತು ಅಭಿವೃದ್ಧಿ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಸಂಸ್ಥೆ ಮತ್ತು ಸ್ವಾಯತ್ತ ಸಂಸ್ಥೆ, ಕಾರ್ಮಿಕ ಅರ್ಥಶಾಸ್ತ್ರ ಸಂಶೋಧನೆ ಮತ್ತು ಅಭಿವೃದ್ಧಿಯ ರಾಷ್ಟ್ರೀಯ ಸಂಸ್ಥೆ ಎಂಬ ಎರಡು ಲಗತ್ತಿಸಿದ ಕಛೇರಿಗಳು ಇದನ್ನು ಬೆಂಬಲಿಸುತ್ತದೆ.

ನೀತಿ ಆಯೋಗದ ಎಲ್ಲಾ ಚಟುವಟಿಕೆಗಳು ಕೆಳಕಂಡಂತೆ ನಾಲ್ಕು ಮುಖ್ಯ ವಿಭಾಗಗಳಲ್ಲಿ ನೋಡಬಹುದು.

1) ನೀತಿ ಮತ್ತು ಕಾರ್ಯಕ್ರಮ ಚೌಕಟ್ಟು

2) ಸಹಕಾರಿ ಒಕ್ಕೂಟ ವ್ಯವಸ್ಥೆ

3) ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ

4) ಚಿಂತಕರ ಕೂಟ ಮತ್ತು ಜ್ಞಾನ ಮತ್ತು ನಾವಿನ್ಯ ಸಮೂಹ

@KTBS NOT TO BE REPUBLISHED

## ಅಭ್ಯಾಸಗಳು

**I. ಈ ಕೆಳಗಿನ ವಾಕ್ಯಗಳಲ್ಲಿ ಖಾಲಿ ಬಿಟ್ಟಿರುವ ಜಾಗಗಳನ್ನು ಭರ್ತಿ ಮಾಡಿರಿ.**

1. 20ನೇ ಶತಮಾನದಲ್ಲಿ ಸರಕಾರಗಳು ಆರ್ಥಿಕಾಭಿವೃದ್ಧಿಯ ತಂತ್ರವಾಗಿ __________ ನ್ನು ಜಾರಿಗೆ ತಂದವು.
2. ಭಾರತದಲ್ಲಿ ಪಂಚವಾರ್ಷಿಕ ಯೋಜನೆಗಳನ್ನು ರೂಪಿಸುವ ಸಂಸ್ಥೆ __________
3. ಹನ್ನೊಂದನೆಯ ಪಂಚವಾರ್ಷಿಕ ಯೋಜನೆಯಲ್ಲಿ __________ ಗೆ ಪ್ರಾಮುಖ್ಯತೆ ನೀಡಲಾಯಿತು.
4. ಭಾರತದ ಹಸಿರು ಕ್ರಾಂತಿಯ ಪಿತಾಮಹ __________ .
5. ಪರಿಸರಸ್ನೇಹಿ ಹಾಗೂ ಸುಸ್ಥಿರ ಕೃಷಿಗಾಗಿ ಸರಕಾರವು ರೈತರಿಗೆ __________ ವಿಧಾನವನ್ನು ಬಳಸುವಂತೆ ಪ್ರೋತ್ಸಾಹಿಸುತ್ತಿದೆ.
6. ನೀತಿ ಆಯೋಗವು __________ ರಂದು ಸ್ಥಾಪಿತವಾಯಿತು.

**II. ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

1. ಆರ್ಥಿಕ ಯೋಜನೆಯ ಅರ್ಥ ತಿಳಿಸಿ.

2. ಭಾರತದ 'ಆರ್ಥಿಕ ಯೋಜನೆಯ ಪಿತ' ಯಾರು ?
3. ಪಂಚವಾರ್ಷಿಕ ಯೋಜನೆಗಳಿಗೆ ಅನುಮೋದನೆ ನೀಡುವ ಸಂಸ್ಥೆ ಯಾವುದು ?
4. ಹಸಿರುಕ್ರಾಂತಿ ಎಂದರೇನು ?
5. ಸುಗ್ಗಿ ನಂತರದ ತಂತ್ರಜ್ಞಾನ ಎಂದರೇನು ?
6. ನೀತಿ ಆಯೋಗದ ಈಗಿನ ಅಧ್ಯಕ್ಷರು ಯಾರು?

**III. ಕೆಳಗಿನ ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.**

1. ಕಲ್ಯಾಣ ರಾಜ್ಯಗಳಲ್ಲಿ ಸರಕಾರಗಳ ಕಾರ್ಯಕ್ಷೇತ್ರ ಹೇಗೆ ವಿಸ್ತರಣೆಗೊಂಡಿದೆ ?
2. ಪಂಚವಾರ್ಷಿಕ ಯೋಜನೆಗಳ ಉದ್ದೇಶಗಳನ್ನು ಬರೆಯಿರಿ.
3. ಪಂಚವಾರ್ಷಿಕ ಯೋಜನೆಗಳ ಸಾಧನೆಗಳನ್ನು ಪಟ್ಟಿ ಮಾಡಿರಿ.
4. ಹಸಿರು ಕ್ರಾಂತಿಗೆ ಪ್ರೇರಣೆಯಾದ ಅಂಶಗಳಾವುವು ?
5. ಕೃಷಿ ವಲಯವು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರಗಳೇನು ?
6. ನೀತಿ ಆಯೋಗದ ಧ್ಯೇಯಗಳು ಯಾವುವು?

**IV. ಚಟುವಟಿಕೆಗಳು.**

1. ನಿಮ್ಮ ಸುತ್ತ-ಮುತ್ತಲಿನಲ್ಲಿ ಬಳಕೆಯಾಗುತ್ತಿರುವ ವಿದೇಶಿ ಸರಕುಗಳನ್ನು ಗುರುತಿಸಿ ಪಟ್ಟಿ ಮಾಡಿರಿ.
2. ಅಂತರ್ಜಾಲದ ಸಹಾಯದಿಂದ ಹನ್ನೆರಡನೆಯ ಪಂಚವಾರ್ಷಿಕ ಯೋಜನೆಯ ಗುರಿ ಮತ್ತು ಉದ್ದೇಶಗಳನ್ನು ಪಟ್ಟಿ ಮಾಡಿರಿ.
3. ನೀತಿ ಆಯೋಗದ ಕಾರ್ಯಗಳ ಬಗ್ಗೆ ವಿಷಯ ಸಂಗ್ರಹಿಸಿ, ಚರ್ಚಿಸಿ.

**V. ಯೋಜನೆ.**

1. ನಿಮ್ಮ ಸುತ್ತ-ಮುತ್ತಲಿನಲ್ಲಿ ಪ್ರಗತಿಪರ ರೈತರೆಂದು ಗುರುತಿಸಲ್ಪಟ್ಟಿರುವ ರೈತರೊಬ್ಬರ ಹೊಲ ಮತ್ತು ತೋಟಗಳಿಗೆ ಭೇಟಿ ನೀಡಿ, ಅವರು ಅನುಸರಿಸುತ್ತಿರುವ ಕೃಷಿವಿಧಾನ, ಅವರು ಬಳಸಿಕೊಂಡಿರುವ ಸುಗ್ಗಿ ಪೂರ್ವ ಮತ್ತು ಸುಗ್ಗಿ ನಂತರದ ತಂತ್ರಜ್ಞಾನಗಳನ್ನು ಕುರಿತು ಒಂದು ವರದಿ ತಯಾರಿಸಿ.

@KTBS NOT TO BE REPUBLISHED

# ವ್ಯವಹಾರ ಅಧ್ಯಯನ

## ಅಧ್ಯಾಯ – 16

## ಬ್ಯಾಂಕ್ ವ್ಯವಹಾರಗಳು

Y7F2V3

**ಈ ಅಧ್ಯಾಯದಲ್ಲಿ ಕೆಳಗಿನ ಅಂಶಗಳನ್ನು ತಿಳಿಯುತ್ತೇವೆ.**

- ಬ್ಯಾಂಕಿನ ಅರ್ಥ
- ಹಣಕಾಸಿನ ವ್ಯವಹಾರಗಳಲ್ಲಿ ಬ್ಯಾಂಕುಗಳು ಮತ್ತು ಅಂಚೆ ಕಚೇರಿಗಳು.
- ಬ್ಯಾಂಕುಗಳ ಗುಣ ಲಕ್ಷಣಗಳು.
- ಬ್ಯಾಂಕಿನಲ್ಲಿ ತೆರೆಯಬಹುದಾದ ವಿವಿಧ ಖಾತೆಗಳು.
- ಬ್ಯಾಂಕುಗಳಲ್ಲಿ ಖಾತೆಗಳನ್ನು ತೆರೆಯುವ ವಿಧಾನ.
- ಬ್ಯಾಂಕು ಖಾತೆಗಳಿಂದಾಗುವ ಅನುಕೂಲಗಳು.

© KTBS NOT TO BE REPUBLISHED

ಬ್ಯಾಂಕುಗಳು ಸುಮಾರು ಎರಡುನೂರು ವರ್ಷಗಳ ಹಿಂದೆ ಅಭಿವೃದ್ಧಿ ಹೊಂದಿದವು. ಬ್ಯಾಂಕುಗಳ ಸ್ವರೂಪವು ಕಾಲಕ್ಕನುಗುಣವಾಗಿ ಬದಲಾವಣೆ ಹೊಂದುತ್ತಾ ಬಂದಿತು. ಬ್ಯಾಂಕ್ ಎಂಬ ಪದವು ಹಣಕಾಸಿನ ವ್ಯವಹಾರಗಳಿಗೆ ಸಂಬಂಧಪಟ್ಟಿದೆ. ಇವು ಹಣಕಾಸಿನ ಸಂಸ್ಥೆಗಳಾಗಿದ್ದು ಗ್ರಾಹಕರು ಭದ್ರತೆಯ ದೃಷ್ಟಿಯಿಂದ ಬ್ಯಾಂಕುಗಳಲ್ಲಿ ತಮ್ಮ ಹಣವನ್ನು ಇಟ್ಟು ತಮಗೆ ಬೇಕಾದಾಗ ಹಿಂದಿರುಗಿ ಪಡೆಯಲು ಸಾಧ್ಯವಾಗಿದೆ. ಬ್ಯಾಂಕುಗಳು ಗ್ರಾಹಕರಿಗೆ ಸಾಲಗಳನ್ನು ಕೊಟ್ಟು ಅವುಗಳಿಗೆ ಬಡ್ಡಿ ವಸೂಲು ಮಾಡುತ್ತವೆ. ವಿವಿಧ ದೇಶಗಳ ವಿವಿಧ ಹಣವನ್ನು ವಿನಿಮಯ ಮಾಡುವ ಕಾರ್ಯ ಮಾಡುತ್ತವೆ. ಯಾವುದೇ ದೇಶದ ಅಭಿವೃದ್ಧಿಯು ಆ ದೇಶದ ಮುಖ್ಯ ಹಣಕಾಸು ಸಂಸ್ಥೆಯಾದ ಬ್ಯಾಂಕಿಂಗ್ ವ್ಯವಸ್ಥೆಯ ಮೇಲೆ ಅವಲಂಬಿಸಿರುತ್ತದೆ. ಬ್ಯಾಂಕುಗಳು ಸಮಾಜದ ಅಭಿವೃದ್ಧಿಯ ಮುಖ್ಯ ಅಂಗಗಳಾದ ವ್ಯವಸಾಯ, ಕೈಗಾರಿಕೆ, ವ್ಯಾಪಾರ ಮುಂತಾದವುಗಳಿಗೆ ಅವಶ್ಯಬಿದ್ದಾಗ ಹಣವನ್ನು ಸಾಲ ರೂಪದಲ್ಲಿ ಕೊಡುತ್ತವೆ ಹಾಗೂ ಆರ್ಥಿಕ ಪ್ರಗತಿಯನ್ನು ತ್ವರಿತಗತಿಯಲ್ಲಿ ಬೆಳೆಸುತ್ತವೆ.

### ಬ್ಯಾಂಕ್ ಎಂದರೇನು?

ಬ್ಯಾಂಕ್ ಎಂಬ ಪದವು ಇಟಾಲಿಯನ್‌ನ "ಬ್ಯಾಂಕೊ"(Banko) ಅಥವಾ ಫ್ರೆಂಚಿನ "ಬ್ಯಾಂಕ್" (Banque) ಎಂಬ ಶಬ್ಧಗಳಿಂದ ಬಂದಿದೆ. ಇವುಗಳ ಅರ್ಥ 'ಬೆಂಚು' ಅಥವಾ ಹಣವನ್ನು ವಿನಿಮಯ ಮಾಡಿಕೊಳ್ಳುವ ಟೇಬಲ್ ಆಗಿದೆ.

ಬ್ಯಾಂಕಿಂಗ್ ಕಂಪನಿಯು ಹಣಕಾಸಿನ ವ್ಯವಹಾರ ಅಂದರೆ ಹಣವನ್ನು ತಮ್ಮಲ್ಲಿ ಇಡುಗಂಟಾಗಿಟ್ಟುಕೊಂಡದ್ದನ್ನು ಸಾಲಕೊಡುವ ಸಂಸ್ಥೆಯಾಗಿದೆ ಎಂದು ವ್ಯಾಖ್ಯಾನಿಸಬಹುದು. ಬ್ಯಾಂಕು ಹಣಕಾಸಿನ ಸಂಸ್ಥೆಯಾಗಿದ್ದು ಠೇವಣಿಗಳನ್ನು ಸ್ವೀಕರಿಸಿ, ಆ ಠೇವಣಿಗಳನ್ನು ಸಾಲಗಳ ರೂಪದಲ್ಲಿ ಬೇರೆ ಬೇರೆ ಸೇವೆಗಳಿಗಾಗಿ ಕೊಡುತ್ತದೆ ಇಂದು ಯಾರು ಹಣವನ್ನು ಉಳಿತಾಯ ಮಾಡಬೇಕೆಂದು ಬಯಸುವವರೋ ಅವರಿಂದ ಸ್ವೀಕರಿಸಿ ಯಾರಿಗೆ ಅವಶ್ಯವಿದೆಯೋ ಅವರಿಗೆ ಸಾಲದ ರೂಪದಲ್ಲಿ ಕೊಡುತ್ತದೆ. ಬ್ಯಾಂಕಿನಲ್ಲಿಯ ಸೇವೆಗಳನ್ನು ಉಪಯೋಗಿಸಿಕೊಳ್ಳುವ ಆ ವ್ಯವಹಾರಗಳನ್ನು ಬ್ಯಾಂಕಿಂಗ್ ಎನ್ನುತ್ತೇವೆ. ಬ್ಯಾಂಕುಗಳು ಸಾರ್ವಜನಿಕರ ಠೇವಣಿಗಳನ್ನು ಅವರಿಗೆ ಬೇಡಿಕೆ ಎನಿಸಿದಾಗ ಚೆಕ್ಕು, ಡ್ರಾಫ್ಟ್ ಮತ್ತಿತರ ರೂಪಗಳಲ್ಲಿ ಮರುಪಾವತಿಮಾಡುತ್ತವೆ.

## ಬ್ಯಾಂಕುಗಳ ಗುಣ ಲಕ್ಷಣಗಳು.

- **ಹಣದ ವಹಿವಾಟು :** ಬ್ಯಾಂಕುಗಳು ಹಣಕಾಸಿನ ಸಂಸ್ಥೆಗಳಾಗಿದ್ದು ಸಾರ್ವಜನಿಕರ ಹಣದ ವಹಿವಾಟನ್ನು ಮಾಡುತ್ತವೆ.
- **ವ್ಯಕ್ತಿ/ಸಂಸ್ಥೆ/ಕಂಪನಿ :** ಬ್ಯಾಂಕು ಒಬ್ಬ ವ್ಯಕ್ತಿಯಾಗಿರಬಹುದು, ಸಂಸ್ಥೆ ಅಥವಾ ಕಂಪನಿ ಆಗಿರಬಹುದು. ಬ್ಯಾಂಕಿಂಗ್ ಕಂಪನಿ ಎಂದರೆ ಹಣಕಾಸಿನ ವ್ಯವಹಾರ ಮಾಡುವ ಸಂಸ್ಥೆ.
- **ಠೇವಣಿಗಳನ್ನು ಅಂಗೀಕರಿಸುತ್ತವೆ :** ಬ್ಯಾಂಕು ಸಾರ್ವಜನಿಕರಿಂದ ಠೇವಣಿಗಳನ್ನು ಅಂಗೀಕ–ರಿಸುತ್ತದೆ. ಈ ಠೇವಣಿಗಳನ್ನು ಠೇವಣಿದಾರರು ಬೇಡಿಕೆ ಇಟ್ಟಾಗ ಅಥವಾ ಒಂದು ನಿರ್ಧಿಷ್ಟ ಅವಧಿ ಮುಗಿದ ಮೇಲೆ ಹಿಂದಿರುಗಿಸಬೇಕಾಗುತ್ತದೆ. ಈ ಠೇವಣಿಗಳಿಗೆ ಬ್ಯಾಂಕು ಭದ್ರತೆಯನ್ನು ಒದಗಿಸುತ್ತದೆ. ಬ್ಯಾಂಕು ಗ್ರಾಹಕರ ಠೇವಣಿಗಳಿಗೆ ಮೇಲ್ವಿಚಾರಕನಂತೆ ವರ್ತಿಸುತ್ತದೆ.
- **ಸಾಲಗಳನ್ನು ಕೊಡುವುದು:** ಬ್ಯಾಂಕು ಕೈಗಾರಿಕಾ ಕ್ಷೇತ್ರ, ಕೃಷಿಕ್ಷೇತ್ರ, ಶಿಕ್ಷಣ, ಗೃಹನಿರ್ಮಾಣ ಮೊದಲಾದ ಉದ್ದೇಶಗಳಿಗಾಗಿ ಹಣವನ್ನು ಸಾಲರೂಪದಲ್ಲಿ ಕೊಡುತ್ತದೆ.
- **ಪಾವತಿ ಮತ್ತು ಹಿಂದಕ್ಕೆ ಪಡೆಯುವುದು:** ಬ್ಯಾಂಕು ಸುಲಭ ರೀತಿಯಲ್ಲಿ ಠೇವಣಿದಾರರಿಗೆ ಚೆಕ್ಕು ಅಥವಾ ಹುಂಡಿಗಳ ಮೂಲಕ ಹಣವನ್ನು ಪಾವತಿಮಾಡುತ್ತದೆ ಮತ್ತು ಠೇವಣಿಗಳನ್ನು ಹಿಂದಕ್ಕೆ ಪಡೆಯಲು ಅನುವು ಮಾಡಿಕೊಡುತ್ತದೆ.
- **ಏಜೆಂಟ್ ಅಥವಾ ಏಜೆಂಟ್ ನಿಯೋಜನೆ ಮತ್ತು ಉಪಯುಕ್ತ ಸೇವೆಗಳು:** ಬ್ಯಾಂಕು ತನ್ನ ಗ್ರಾಹಕರಿಗೆ ಏಜೆಂಟರಂತೆ ಅನೇಕ ಉಪಯುಕ್ತ ಸೇವೆಗಳನ್ನು ಒದಗಿಸುತ್ತದೆ.
- **ಲಾಭ ಮತ್ತು ಸೇವಾ ಭಾವನೆ:** ಬ್ಯಾಂಕು ಸೇವೆಯ ಮನೋಭಾವ ಹೊಂದಿದ್ದು ಲಾಭ ಪಡೆಯುವ ಒಂದು ಸಂಸ್ಥೆಯಾಗಿದೆ.
- **ನಿರಂತರ ವಿಸ್ತರಿಸುತ್ತಾ ಹೋಗುವ ಕಾರ್ಯಗಳು:** ಬ್ಯಾಂಕುಗಳು ತಮ್ಮ ಕಾರ್ಯಗಳನ್ನು ನಿರಂತರವಾಗಿ ಬೇರೆ ಬೇರೆ ದಿಕ್ಕುಗಳತ್ತ ಸೇವೆಗಳನ್ನು ಮತ್ತು ಚಟುವಟಿಕೆಗಳನ್ನು ವಿಸ್ತ–ರಿಸಿಕೊಂಡು ಹೋಗುತ್ತವೆ.
- **ಸಂಬಂಧ ಕಲ್ಪಿಸುವ ಕೊಂಡಿ :** ಬ್ಯಾಂಕು ಠೇವಣಿದಾರರು ಮತ್ತು ಸಾಲ ಪಡೆಯುವವರ ಮಧ್ಯೆ ಸಂಪರ್ಕ ಕಲ್ಪಿಸುವ ಒಂದು ಕೊಂಡಿಯಂತೆ ತಮ್ಮ ಕಾರ್ಯಗಳನ್ನು ನಡೆಸುತ್ತದೆ. ಗ್ರಾಹಕರ ಉಳಿಕೆ ಹಣವನ್ನು ಠೇವಣಿಗಳ ಮೂಲಕ ಸಂಗ್ರಹಿಸಿ ಇದನ್ನು ಯಾರಿಗೆ ಅವಶ್ಯಕವಿದೆಯೋ ಅವರಿಗೆ ಸಾಲ ರೂಪದಲ್ಲಿ ಕೊಡುತ್ತದೆ.
- **ಬ್ಯಾಂಕಿಂಗ್ ವ್ಯವಹಾರ :** ಬ್ಯಾಂಕಿನ ಮುಖ್ಯ ಚಟುವಟಿಕೆ ಹಣಕಾಸಿನಿಂದ ಕೂಡಿದ ವ್ಯವಹಾರ (ಬ್ಯಾಂಕಿಂಗ್) ವಾಗಿದ್ದು ಇತರೆ ವ್ಯವಹಾರಗಳಿಗೆ ಅಧೀನವಾಗಿರುವುದಿಲ್ಲ.
- **ಹೆಸರಿನ ಗುರುತು:** ಬ್ಯಾಂಕು ಯಾವಾಗಲೂ ತನ್ನ ಹೆಸರಿನಲ್ಲಿ ಬ್ಯಾಂಕು ಎಂಬ ಪದವನ್ನು ಸೇರಿಸಿರಬೇಕು. ಉದಾ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಸ್ಟೇಟ್ ಬ್ಯಾಂಕ್ ಆಫ್

©KTBS NOT TO BE REPUBLISHED

ಮೈಸೂರು, ಕೆನರಾ ಬ್ಯಾಂಕು, ಕಾರ್ಪೊರೇಷನ್ ಬ್ಯಾಂಕು ಮುಂತಾದವು ಇದರಿಂದಾಗಿ ಗ್ರಾಹಕರು ಯಾವ ಬ್ಯಾಂಕಿನ ಜೊತೆಯಲ್ಲಿ ವ್ಯವಹಾರ ಇಟ್ಟುಕೊಂಡಿದ್ದಾರೆಂದು ತಿಳಿಯುತ್ತದೆ.

**ಬ್ಯಾಂಕಿನ ಕಾರ್ಯಗಳು :**

1. ಸಾರ್ವಜನಿಕರಿಂದ ಅಥವಾ ಇತರರಿಂದ ಠೇವಣಿಗಳನ್ನು ಅಂಗೀಕರಿಸುವುದು.
2. ಸಾರ್ವಜನಿಕರಿಗೆ ಮತ್ತು ಸಂಘ ಸಂಸ್ಥೆಗಳಿಗೆ ಸಾಲಗಳನ್ನು ಕೊಡುವುದು.
3. ಹಣವನ್ನು ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ವರ್ಗಾಯಿಸುವುದು.
4. ಚೆಕ್ಕು ಮತ್ತು ಹುಂಡಿಗಳ ಮೇಲೆ ಹಣ ವಸೂಲು ಮಾಡುವುದು.
5. ಹುಂಡಿಗಳನ್ನು ಸೋಡಿ ಮಾಡುವುದು.
6. ಭದ್ರತಾ ಕಪಾಟುಗಳನ್ನು ಬಾಡಿಗೆಗೆ ಕೊಡುವುದು.
7. ವಿದೇಶಿ ವಿನಿಮಯದ ವ್ಯವಹಾರಗಳನ್ನು ನಿರ್ವಹಿಸುವುದು.
8. ಬೆಲೆ ಬಾಳುವ ವಸ್ತುಗಳನ್ನು ತಮ್ಮ ಸುಪರ್ಧಿಗಳಲ್ಲಿ ಭದ್ರವಾಗಿ ಇಟ್ಟುಕೊಳ್ಳುವುದು.
9. ಸಾಲಪತ್ರಗಳನ್ನು ಮತ್ತು ಜವಾಬ್ಧಾರಿ ಪತ್ರಗಳನ್ನು ಕೊಡುವುದು.
10. ಸರ್ಕಾರದ ( ಕೇಂದ್ರ ಹಾಗೂ ರಾಜ್ಯ) ಹಣಕಾಸಿನ ವ್ಯವಹಾರಗಳನ್ನು ನಿರ್ವಹಿಸುವುದು.

**ಬ್ಯಾಂಕರನಿಗೂ ಮತ್ತು ಗ್ರಾಹಕರಿಗೂ ಇರುವ ಸಂಬಂಧ :**

ಬ್ಯಾಂಕರನಿಗೂ ಅದರ ಗ್ರಾಹಕರಿಗೂ ಇರುವ ಸಂಬಂಧಗಳನ್ನು ಎರಡು ರೀತಿಗಳಲ್ಲಿ ವಿಂಗಡಿಸಬಹುದು.

1. ಸಾಮಾನ್ಯ ಸಂಬಂಧ
2. ವಿಶೇಷ ಸಂಬಂಧ

**1. ಸಾಮಾನ್ಯ ಸಂಬಂಧ :** ಇದು ಮೂರು ಮುಖ್ಯ ವಿಧಗಳಿಂದ ಕೂಡಿದೆ.

- ಪ್ರಾಥಮಿಕ ಸಂಬಂಧ (ಸಾಲಿಗ ಮತ್ತು ಸಾಲಗಾರನ ಸಂಬಂಧದಂತೆ)
- ಸಹಾಯಕ ಅಥವಾ ಉಪಕಾರ ಸಂಬಂಧ (ಧರ್ಮದರ್ಶಿ ಅಥವಾ ನಿಕ್ಷೇಪಧಾರಿ ಮತ್ತು ಪ್ರಯೋಜನಕಾರಿಯ ನಡುವಿನ ಸಂಬಂಧ)
- ಕಾರಬಾರಿ ಅಥವಾ ನಿಯೋಗಿ ಮತ್ತು ಮುಖ್ಯಸ್ಥನ ಸಂಬಂಧ.

**2. ವಿಶೇಷ ಸಂಬಂಧ :**

- ಚೆಕ್ಕುಗಳನ್ನು ಮನ್ನಣೆ ಮಾಡುವುದು.
- ಗ್ರಾಹಕನ ಲೆಕ್ಕಗಳ ಗೋಪ್ಯತೆ ಕಾಪಾಡುವುದು.

**ಚಟುವಟಿಕೆ :**

ನಿಮ್ಮ ಹತ್ತಿರದ ಬ್ಯಾಂಕಿಗೆ ಭೇಟಿ ನೀಡಿ ಉನ್ನತ ವ್ಯಾಸಂಗಕ್ಕೆ ಸಾಲ ನೀಡುವ ಕ್ರಮದ ಬಗ್ಗೆ ವ್ಯವಸ್ಥಾಪಕರಿಂದ ಮಾಹಿತಿ ಸಂಗ್ರಹಿಸಿ.

©KTBS NOT TO BE REPUBLISHED

**ಬ್ಯಾಂಕುಗಳು ಸಲ್ಲಿಸುವ ಸೇವೆಗಳು:**

1. ಜಮಾ ಕಾರ್ಡು (Credit Cards)ಗಳನ್ನು ಕೊಡುವುದು.
2. ಖಾಸಗಿ ಸಾಲಗಳು.
3. ಮನೆ ಕಟ್ಟಲು ಅಥವಾ ವಾಹನ ಖರೀದಿಸಲು ಸಾಲ ಕೊಡುವುದು.
4. ಪರಸ್ಪರ ನಿಧಿಗಳನ್ನು ನಿರ್ವಹಿಸುವುದು
5. ವ್ಯಾಪಾರಕ್ಕೆ ಬೇಕಾದ ಸಾಲಗಳು.
6. ಭದ್ರತಾ ಅಥವಾ ರಕ್ಷಣಾ ಕಪಾಟುಗಳನ್ನು ಕೊಡುವುದು.
7. ಡೆಬಿಟ್ ಕಾರ್ಡ್
8. ಭರವಸೆ ಸೇವೆಗಳು
9. ಸಹಿಗಳಿಗೆ ಜವಾಬ್ದಾರಿ ಹಾಕುವುದು.

## ಬ್ಯಾಂಕಿಂಗ್ ವ್ಯವಹಾರ

### ಬ್ಯಾಂಕುಗಳು ಮತ್ತು ಅಂಚೆ ಕಚೇರಿಗಳು

ಯಾವುದೇ ಒಂದು ಹಣಕಾಸಿನ ವ್ಯವಹಾರಕ್ಕೆ ಸಂಬಂಧಿಸಿದ ಲೆಕ್ಕಗಳನ್ನು ಬ್ಯಾಂಕು ವ್ಯವಹಾರಗಳೆನ್ನುತ್ತೇವೆ. ಬ್ಯಾಂಕುಗಳು ಹಣಕಾಸಿನ ಸಂಬಂಧ ವ್ಯವಹಾರಗಳನ್ನು ನಿರ್ವಹಿಸುವ ಸಂಸ್ಥೆಗಳಾಗಿವೆ. ಬ್ಯಾಂಕುಗಳು ಗ್ರಾಹಕರ ಹಣವನ್ನು ಠೇವಣಿಗಳಾಗಿ ಇಟ್ಟುಕೊಳ್ಳುತ್ತವೆ ಮತ್ತು ಈ ಠೇವಣಿಗಳಿಂದ ಸಂಗ್ರಹವಾದ ಹಣವನ್ನು ಗಿರಾಕಿಗಳಿಗೆ ಸಾಲವಾಗಿ ಕೊಡುತ್ತವೆ. ಈ ಸಾಲಗಳನ್ನು ಬ್ಯಾಂಕ್ ಸಾಲ ಎನ್ನುತ್ತೇವೆ. ಬ್ಯಾಂಕುಗಳು ತಮ್ಮ ಗಿರಾಕಿಗಳ ಠೇವಣಿಗಳನ್ನು ಬೇಡಿಕೆ ಇರುವ ಗ್ರಾಹಕ-ರಿಗೆ ಸಾಲಗಳ ರೂಪದಲ್ಲಿ ಕೊಟ್ಟು ಇದಕ್ಕೆ ಬಡ್ಡಿ ವಸೂಲು ಮಾಡುತ್ತವೆ. ಈ ಬಡ್ಡಿಯಿಂದ ಬಂದ ಸ್ವಲ್ಪ ಭಾಗದ ಹಣವನ್ನು ತನ್ನ ಠೇವಣಿದಾರರಿಗೂ ಬಡ್ಡಿ ರೂಪದಲ್ಲಿ ಕೊಡುತ್ತವೆ. ಈ ಬಡ್ಡಿಯು ಠೇವಣಿದಾರರ ಆದಾಯವಾಗಿರುತ್ತದೆ. ಬ್ಯಾಂಕುಗಳು ತಮ್ಮ ಗಿರಾಕಿಗಳ ಹಣವನ್ನು ಸ್ಥಳೀಯ ಮತ್ತು ವಿದೇಶ ವ್ಯಾಪಾರಗಳಲ್ಲಿ ತೊಡಗಿಸಿ ಹಣವನ್ನು ವೃದ್ಧಿಮಾಡಿಕೊಳ್ಳುತ್ತವೆ.

ಭಾರತದಲ್ಲಿ ಬ್ಯಾಂಕುಗಳ ಎಲ್ಲ ಚಟುವಟಿಕೆಗಳು ರಿಜರ್ವ್ ಬ್ಯಾಂಕಿನ ಹತೋಟಿಯಲ್ಲಿರುತ್ತದೆ. ರಿಜರ್ವ್‌ಬ್ಯಾಂಕನ್ನು ಬ್ಯಾಂಕುಗಳ ಬ್ಯಾಂಕು ಅಥವಾ ಬ್ಯಾಂಕುಗಳ ತಾಯಿ ಎಂದೂ ಕರೆಯಬಹುದು. ರಿಜರ್ವ ಬ್ಯಾಂಕು ದೇಶದ ಕೇಂದ್ರ ಬ್ಯಾಂಕಾಗಿದೆ. ಇದು ಹಣಕಾಸಿನ ಕಾರ್ಯ ನೀತಿಯನ್ನು ರೂಪಿಸುತ್ತದೆ. ಈ ಕಾರ್ಯ ನೀತಿಯನ್ನು ಎಲ್ಲ ಬ್ಯಾಂಕುಗಳು ಪಾಲಿಸಬೇಕಾಗುತ್ತದೆ. ಈಗ ನಮ್ಮಲ್ಲಿ ಸ್ಟೇಟ್ ಬ್ಯಾಂಕ್ ಸಮೂಹಗಳು, ಇಪ್ಪತ್ತೊಂದು ರಾಷ್ಟ್ರೀಕೃತ ಬ್ಯಾಂಕುಗಳು ಮತ್ತು ಇಪ್ಪತ್ತೊಂದು ಖಾಸಗಿ ಬ್ಯಾಂಕುಗಳು ಇದೆ. ಹತ್ತೊಂಬತ್ತು ವಿದೇಶೀ ಬ್ಯಾಂಕುಗಳು ಇದ್ದು ಇದರ ಜಾಲ ಸುಮಾರು 8,000 ಉಪಶಾಖೆಗಳಿಂದ ಕಾರ್ಯ ನಿರ್ವಹಿಸುತ್ತಿದೆ. ಗ್ರಾಮಾಂತರ ಅಲ್ಲದೆ ಬ್ಯಾಂಕುಗಳು ಮತ್ತು ರಾಜ್ಯ ಸರ್ಕಾರದ ಹಾಗೂ ಖಾಸಗಿ ಸಹಕಾರಿ ಬ್ಯಾಂಕುಗಳು ಇವೆ.

ಬ್ಯಾಂಕುಗಳ ಉದ್ಯಮದಲ್ಲಿ ಇತ್ತೀಚಿನ ಬೆಳವಣಿಗೆ ಎಂದರೆ ಅಂಚೆ ಕಚೇರಿಗಳನ್ನು ಬ್ಯಾಂಕು ವ್ಯವಹಾರಗಳ ಅಂಕಿತದೊಳಕ್ಕೆ ತಂದಿರುವುದು. ಭಾರತೀಯ ಅಂಚೆ ಇಲಾಖೆ "ಭಾರತೀಯ ಅಂಚೆ

NOT TO BE REPUBLISHED ©KTBS

> **ಚಟುವಟಿಕೆ :**
> ಅಂಚೆ ಕಚೇರಿಗೆ ಭೇಟಿ ನೀಡಿ ಅಲ್ಲಿ ಬ್ಯಾಂಕ್ ವ್ಯವಹಾರ ನಿರ್ವಹಣೆಯು ನಡೆಯುವ ಕ್ರಮದ ಬಗ್ಗೆ ಮಾಹಿತಿ ಪಡೆಯಿರಿ.

ಬ್ಯಾಂಕ್" ನ ಜಾಲವನ್ನು ಅಂಚೆ ಕಚೇರಿಗಳೊಡನೆ ದೇಶದಾದ್ಯಂತ ಪ್ರಾರಂಭ ಮಾಡಲು ಯೋಜನೆಯನ್ನು ರೂಪಿಸಿದೆ. ಇವುಗಳಲ್ಲಿ ಶೇ. 90 ರಷ್ಟು ಗ್ರಾಮಾಂತರ ಮತ್ತು ಸಣ್ಣ ಸಣ್ಣ ಪಟ್ಟಣಗಳಲ್ಲಿ ಪ್ರಾರಂಭಿಸಲು ನಿರ್ಧ–ರಿಸಿದೆ. ಅಂಚೆ ಇಲಾಖೆಯು ಈಗಾಗಲೇ ರಾಷ್ಟ್ರೀಯ ಉಳಿತಾಯ ಪತ್ರಗಳು, ಅಂಚೆ ಉಳಿತಾಯ ಖಾತೆಗಳು, ಕಿಸಾನ್ ವಿಕಾಸ ಪತ್ರಗಳು, ಮಾಹೆಯಾನ ತೀರು ಠೇವಣಿಗಳು, ಅಂಚೆ ವಿಮೆ, ನಿವೃತ್ತಿವೇತನ, ಹಣವನ್ನು ವರ್ಗಾಯಿಸುವುದು ಮುಂತಾದ ಅನೇಕ ಹಣಕಾಸಿನ ವ್ಯವಹಾರಗಳನ್ನು ಕೈಗೊಂಡಿದೆ. ಅಂಚೆ ಇಲಾಖೆಯು ಒಂದು ಸಾವಿರ ಕೋಟಿ ರೂಪಾಯಿಗಳಷ್ಟು ಬಂಡವಾಳವನ್ನು ಬ್ಯಾಂಕು ವ್ಯವಹಾರಕ್ಕೆ ತೊಡಗಿಸಲು ಯೋಜನೆ ಹಾಕಿಕೊಂಡಿದೆ. ಇದು ಅಂಚೆ ಇಲಾಖೆಯ ಸಹಾಯಕ ಕ್ಷೇತ್ರವಾಗುತ್ತದೆ.

**ಬ್ಯಾಂಕುಗಳ ವಿಧಗಳು :**

ಬ್ಯಾಂಕುಗಳಲ್ಲಿ ಹಲವಾರು ವಿಧಗಳಿವೆ. ಪ್ರತಿಯೊಂದು ವಿಧದ ಬ್ಯಾಂಕು ತಮ್ಮ ಒಂದು ನಿರ್ಧಿಷ್ಟ ವಿಧದ ವ್ಯವಹಾರದಲ್ಲಿ ಪರಿಣಿತಿ ಪಡೆದಿರುತ್ತವೆ.

ಕೆಲವು ಮುಖ್ಯ ಬ್ಯಾಂಕುಗಳ ವಿಧಗಳೆಂದರೆ :

1. ಕೇಂದ್ರ ಬ್ಯಾಂಕು ಅಥವಾ ಭಾರತೀಯ ರಿಜರ್ವ್ ಬ್ಯಾಂಕು
2. ವಾಣಿಜ್ಯ ಬ್ಯಾಂಕುಗಳು
3. ಕೈಗಾರಿಕಾ ಅಭಿವೃದ್ಧಿ ಬ್ಯಾಂಕುಗಳು
4. ಭೂ–ಅಭಿವೃದ್ಧಿ ಅಥವಾ ವ್ಯವಸಾಯ ಬ್ಯಾಂಕುಗಳು
5. ಸ್ಥಳೀಯ ಬ್ಯಾಂಕುಗಳು (ಲೇವಾದೇವಿ ಗಾರರು ಅಥವಾ ಸಾಹುಕಾರರು)
6. ಸಹಕಾರಿ ಬ್ಯಾಂಕುಗಳು

(ಈ ವಿವಿಧ ಬ್ಯಾಂಕುಗಳ ವಿವರಣೆ ಬಗ್ಗೆ ಹಿಂದಿನ ತರಗತಿಯ ಅರ್ಥಶಾಸ್ತ್ರ ವಿಭಾಗದಲ್ಲಿ ತಿಳಿದಿದ್ದೀರಿ.)

**ಬ್ಯಾಂಕುಗಳಲ್ಲಿ ತೆರೆಯಬಹುದಾದ ವಿವಿಧ ಖಾತೆಗಳು. (Typers of Bank Accounts)**

ಬ್ಯಾಂಕುಗಳಲ್ಲಿ ಸಾಮಾನ್ಯವಾಗಿ ಈ ಕೆಳಗಿನ ನಾಲ್ಕು ವಿಧದ ಖಾತೆಗಳನ್ನು ತೆರೆಯಬಹುದು.

1) ಉಳಿತಾಯ ಖಾತೆ. (Savings Account)
2) ಚಾಲ್ತಿ ಖಾತೆ (Current Account)
3) ಆವರ್ತ ಠೇವಣಿ ಖಾತೆ (Recurring Deposit Account)
4) ನಿಶ್ಚಿತ ಠೇವಣಿ ಖಾತೆ. (Fixed Deposit Account)

1) **ಉಳಿತಾಯ ಖಾತೆ :** ಸಾಮಾನ್ಯವಾಗಿ ವೇತನ ಪಡೆಯುವವರು ಅಥವಾ ಒಂದು ನಿಯಮಿತ ಆದಾಯ ಹೊಂದಿರುವ ಜನರಿಂದ ಉಳಿತಾಯ ಖಾತೆ ತೆರೆಯಲ್ಪಡುತ್ತದೆ. ಈ ಸೌಲಭ್ಯವನ್ನು ವಿದ್ಯಾರ್ಥಿಗಳು, ಹಿರಿಯ ನಾಗರಿಕರು, ಪಿಂಚಣಿದಾರರು ಕೂಡ ತೆರೆಯಲು ಅವಕಾಶವಿದೆ.

NOT TO BE REPUBLISHED
© KTBS

> **ಚಟುವಟಿಕೆ :**
> ಪ್ರಸ್ತುತ ಕೆಳಕಂಡ ಬ್ಯಾಂಕ್ ಖಾತೆಗಳಿಗೆ ಬ್ಯಾಂಕುಗಳು ನೀಡುವ ವಾರ್ಷಿಕ ಬಡ್ಡಿದರ ತಿಳಿಯಿರಿ.
> 1. ಉಳಿತಾಯ ಖಾತೆ
> 2. ಚಾಲ್ತಿ ಖಾತೆ
> 3. ಆವರ್ತ ಠೇವಣಿ ಖಾತೆ

ಈ ಖಾತೆಯು ಜನರು ಹಣ ಉಳಿತಾಯ ಮಾಡಲು ಸಹಾಯ ಮಾಡುತ್ತದೆ. ಉಳಿತಾಯ ಖಾತೆಯ ಗರಿಷ್ಠ ಮೊತ್ತಕ್ಕೆ ಪರಿಮಿತಿ ಇರುವುದಿಲ್ಲ. ಬ್ಯಾಂಕಿನಿಂದ ಹಣ ಹಿಂದಕ್ಕೆ ಪಡೆಯಲು ಚೆಕ್ಕು ಪುಸ್ತಕ ಅಥವಾ ಹಣ ಹಿಂದಕ್ಕೆ ಪಡೆಯುವ ಚೀಟಿಯ ಮೂಲಕ ಸಾಧ್ಯವಿದೆ.

2) **ಚಾಲ್ತಿ ಖಾತೆ** : ಈ ಖಾತೆಯನ್ನು ಸಾಮಾನ್ಯವಾಗಿ ಹೆಚ್ಚು ಬ್ಯಾಂಕು ವಹಿವಾಟು ನಡೆಸುವ ವ್ಯಾಪಾರಸ್ಥರು, ವಾಣಿಜ್ಯ ಮತ್ತು ಔದ್ಯೋಗಿಕ ಸಂಸ್ಥೆಯವರು ತೆರೆಯುತ್ತಾರೆ. ಇಲ್ಲಿ ಠೇವಣಿಗಳ ಮರುಪಾವತಿ ಮತ್ತು ಬೇಡಿಕೆ ಠೇವಣಿಗಳು ಅಥವಾ ಉಪಸರ್ಗ (Contra) ವ್ಯವಹಾರಗಳ ಮೂಲಕ ಹಣವನ್ನು ಹಿಂಪಡೆಯಲು ಸಾಧ್ಯವಾಗುತ್ತದೆ. ಹಣವನ್ನು ದಿನಕ್ಕೆ ಎಷ್ಟು ಬಾರಿಯಾದರೂ ತುಂಬಬಹುದು ಮತ್ತು ಎಷ್ಟು ಬಾರಿಯಾದರೂ ಹಿಂಪಡೆಯಬಹುದು. ಈ ಖಾತೆಯ ಠೇವಣಿಗಳಿಗೆ ಬ್ಯಾಂಕುಗಳು ಬಡ್ಡಿಯನ್ನು ಕೊಡುವುದಿಲ್ಲ. ಆದರೆ ತಮ್ಮ ಸೇವೆಗೆ ಸೇವಾ ಶುಲ್ಕ ವಸೂಲಿ ಮಾಡುತ್ತವೆ.

3) **ಆವರ್ತ ಠೇವಣಿ ಖಾತೆ (Recurring Deposit Account) :** ಆವರ್ತ ಠೇವಣಿ ಖಾತೆಗಳನ್ನು ಸಾಮಾನ್ಯವಾಗಿ ಭವಿಷ್ಯ ಕಾಲದಲ್ಲಿ ಯಾವುದಾದರೂ ಒಂದು ನಿರ್ಧಿಷ್ಟ ದಿನದಂದು ಹಿಂದಕ್ಕೆ ಪಡೆಯಲು ತೆರೆಯಲ್ಪಡುತ್ತದೆ. ಭವಿಷ್ಯದ ಅವಶ್ಯಕತೆಗಳಿಗೆ ತಿಂಗಳು ತಿಂಗಳು ವ್ಯವಸ್ಥಿತವಾಗಿ ಠೇವಣಿಗಳನ್ನು ಒಂದು ಅವಧಿಗೆ ಜಮಾ ಮಾಡುತ್ತಾರೆ. (ಭವಿಷ್ಯದ ಅವಶ್ಯಕತೆಗಳಾದ ಮಕ್ಕಳ ವಿವಾಹ, ಬೆಲೆ ಬಾಳುವ ವಸ್ತುಗಳ ಖರೀದಿ, ನೆಲ, ಕಾರು ಮುಂತಾದವುಗಳನ್ನು ಕೊಳ್ಳಲು) ಅವಧಿ ಮುಗಿದ ನಂತರ ಠೇವಣಿ ಮಾಡಿದ ಹಣದ ಜೊತೆಗೆ ಬಡ್ಡಿಯನ್ನು ಸೇರಿಸಿ ಹಣವನ್ನು ಬ್ಯಾಂಕು ಹಿಂದಿರುಗಿಸುತ್ತದೆ.

4) **ನಿಶ್ಚಿತ ಠೇವಣಿ ಖಾತೆ : (Term Deposit Account)** ಈ ಖಾತೆಯಲ್ಲಿ ಠೇವಣಿಯನ್ನು ಒಂದು ನಿಗದಿತ ಅವಧಿಗೆ ಇಡಲಾಗುತ್ತದೆ. ಠೇವಣಿ ಹಣವನ್ನು ನಿಶ್ಚಿತ ಅವಧಿ ಮುಗಿದ ನಂತರ ಠೇವಣಿದಾರರಿಗೆ ಪಾವತಿ ಮಾಡಲಾಗುತ್ತದೆ. (ನಿಶ್ಚಿತ ಅವಧಿ ತಿಂಗಳಾಗಿರಬಹುದು, ಆರು ತಿಂಗಳಾಗಿರಬಹುದು, ಒಂದು ವರ್ಷವಾಗಿರಬಹುದು, ಐದು ವರ್ಷಗಳಾಗಿರಬಹುದು ಅಥವಾ ಹತ್ತು ವರ್ಷಗಳಾಗಿರಬಹುದು) ಠೇವಣಿ ಹಣವನ್ನು ನಿಗದಿತ ಅವಧಿಗೆ ಮುಂಚೆ ಹಿಂದಕ್ಕೆ ಪಡೆಯಲು ಸಾಧ್ಯವಿಲ್ಲ. ಬಡ್ಡಿದರ ಅವಧಿಗನುಗುಣವಾಗಿ ಹೆಚ್ಚಾಗಿರುತ್ತದೆ.

> **ಚಟುವಟಿಕೆ :**
> ವಾರ್ಷಿಕ ಶೇ 8 ರಂತೆ 50000/– ರೂಗಳ ನಿಶ್ಚಿತ ಠೇವಣಿಗೆ ಮಾಸಿಕ ನೀಡಬೇಕಾದ ಬಡ್ಡಿಯ ಮೊತ್ತವನ್ನು ಕಂಡು ಹಿಡಿಯಿರಿ.

## ಬ್ಯಾಂಕು ಖಾತೆಯನ್ನು ತೆಗೆಯುವ ವಿಧಾನ (Opening of Bank Account)

> **ಚಟುವಟಿಕೆ :**
> ಹತ್ತಿರದ ಯಾವುದಾದರೊಂದು ಬ್ಯಾಂಕಿಗೆ ಭೇಟಿ ನೀಡಿ ಅಲ್ಲಿನ ವ್ಯವಹಾರ ನಿರ್ವಹಣೆಯನ್ನು ತಿಳಿಯಿರಿ.

ಈ ದಿನಗಳಲ್ಲಿ ಬ್ಯಾಂಕುಗಳು ಮುಖ್ಯವಾದ ಹಣಕಾಸಿನ ಸಂಸ್ಥೆಗಳಾಗಿವೆ. ಬ್ಯಾಂಕುಗಳು ಸುರಕ್ಷಿತ ಪದ್ಧತಿಗಳ ಮೂಲಕ

© KTBS NOT TO BE REPUBLISHED

ಹಣದ ವ್ಯವಹಾರಗಳನ್ನು ನಿರ್ವಹಿಸಲು ಸಹಾಯ ಮಾಡುತ್ತವೆ. ಬ್ಯಾಂಕುಗಳ ಸೇವೆಗಳನ್ನು ಪಡೆಯಲು ವ್ಯಕ್ತಿಗಳಿಗೆ ಅಥವಾ ಸಂಸ್ಥೆಗಳಿಗೆ ಬ್ಯಾಂಕುಗಳಲ್ಲಿ ಖಾತೆಗಳನ್ನು ತೆಗೆಯುವುದು ಅವಶ್ಯಕ. ಬ್ಯಾಂಕುಗಳಲ್ಲಿ ಖಾತೆಗಳನ್ನು ತೆಗೆಯುವುದು ಅಷ್ಟೇನು ಕಷ್ಟಕರವಾದ ಕೆಲಸವಲ್ಲ. ಬ್ಯಾಂಕುಗಳಲ್ಲಿ ಖಾತೆಗಳನ್ನು ತೆರೆಯಲು ಏಳು ಹಂತಗಳಿವೆ. ಅವುಗಳೆಂದರೆ :

> **ನಿಮಗಿದು ತಿಳಿದಿರಲಿ :**
>
> **ಜಂಟಿಖಾತೆ :** ಇಬ್ಬರು ಅಥವಾ ಹೆಚ್ಚಿನ ಜನರು ಒಂದೇ ಬ್ಯಾಂಕ್ ಖಾತೆ ತೆರೆದು ವ್ಯವಹರಿಸುವುದನ್ನು ಜಂಟಿಖಾತೆ ಎನ್ನುತ್ತಾರೆ.

1. **ಯಾವ ವಿಧವಾದ ಬ್ಯಾಂಕ್ ಖಾತೆಯನ್ನು ತೆಗೆಯಬೇಕೆಂಬುದನ್ನು ನಿರ್ಧರಿಸುವುದು :** ಬ್ಯಾಂಕುಗಳಲ್ಲಿ ಅನೇಕ ರೀತಿಯ ಖಾತೆಗಳಿವೆ. ಉಳಿತಾಯ ಖಾತೆ, ಚಾಲ್ತಿಖಾತೆ, ಆವರ್ತಖಾತೆ ಮತ್ತು ನಿಶ್ಚಿತ ಅವಧಿಯ ಠೇವಣಿಖಾತೆ. ಬ್ಯಾಂಕಿನಲ್ಲಿ ಖಾತೆ ತೆರೆಯುವ ಮುನ್ನ ತಮ್ಮ ಅವಶ್ಯಕತೆಗೆ ಅನುಗುಣವಾಗಿ ಯಾವ ರೀತಿಯ ಖಾತೆ ತೆಗೆದರೆ ಉತ್ತಮವೆಂದು ನಿರ್ಧರಿಸ ಬೇಕಿದೆ.

2. **ನಿಮಗೆ ಅನುಕೂಲವಾದ ಬ್ಯಾಂಕಿನ ಅಧಿಕಾರಿಯನ್ನು ಸಂಪರ್ಕಿಸುವುದು :** ಯಾವ ರೀತಿಯ ಖಾತೆಯನ್ನು ತೆಗೆಯ ಬೇಕೆಂದು ನಿರ್ಧರಿಸಿದ ಮೇಲೆ ನಿಮಗೆ ಸೂಕ್ತವೆನಿಸಿದ ಬ್ಯಾಂಕಿಗೆ ಹೋಗಿ ಅಲ್ಲಿನ ಅಧಿಕಾರಿಯನ್ನು ಭೇಟಿಮಾಡಿ ನಿಮ್ಮ ಇರಾದೆಯನ್ನು ತಿಳಿಸಬೇಕು.

3. **ಪ್ರಸ್ತಾವನೆ ಅರ್ಜಿ– ಖಾತೆ ತೆರೆಯುವ ಲೆಕ್ಕದ ನಮೂನೆಯನ್ನು ತುಂಬಿ :** ಈ ಪ್ರಸ್ತಾವನಾ ಅರ್ಜಿಯನ್ನು ಪೂರ್ಣವಾಗಿ ತುಂಬಿ, ಇದರಲ್ಲಿ ನಿಮ್ಮ ಹೆಸರು, ವಿಳಾಸ, ಉದ್ಯೋಗ, ವಯಸ್ಸು ಮುಂತಾದ ವಿವರಗಳಿದ್ದು ಈ ನಮೂನೆಯನ್ನು ಪೂರ್ಣವಾಗಿ ತುಂಬಬೇಕು. ಅರ್ಜಿಯ ಜೊತೆಗೆ ನಿಮ್ಮ ಎರಡು ಅಥವಾ ಮೂರು ಮಾದರಿ ಸಹಿಗಳನ್ನು ಮಾದರಿ ಸಹಿಗಳ ಕಾರ್ಡಿನಲ್ಲಿ ಮಾಡಬೇಕು. ಈ ಸಹಿಗಳನ್ನು ನೀವು ಯಾವಾಗ ಬ್ಯಾಂಕಿನ ಜೊತೆಯಲ್ಲಿ ವ್ಯವಹಾರ ಮಾಡುತ್ತೀರೋ ಆಗ ಅಲ್ಲಿ ಬದಲಾವಣೆ ಮಾಡದೆ ಮಾಡಬೇಕಾಗುತ್ತದೆ. ಇತ್ತೀಚಿನ ನಿಮ್ಮ ಎರಡು ಅಥವಾ ಮೂರು ಭಾವ ಚಿತ್ರಗಳನ್ನು ಲಗತ್ತಿಸಬೇಕಾಗುತ್ತದೆ. ಎರಡು ಅಥವಾ ಮೂರು ಜನರು ಕೂಡಿ ಒಟ್ಟಿಗೆ ಖಾತೆಯನ್ನು (Joint Account) ತೆರೆಯಬೇಕಾದರೆ ಎಲ್ಲರ ಸಹಿಗಳು, ಭಾವ ಚಿತ್ರಗಳು, ವಿವರಗಳು ಬೇಕಾಗುತ್ತದೆ.

4. **ಪರಿಚಿತರ ಉಲ್ಲೇಖವನ್ನು ಕೊಡುವುದು:** ಬ್ಯಾಂಕಿನ ಖಾತೆಯನ್ನು ತೆಗೆಯಲು ಆ ಬ್ಯಾಂಕಿನಲ್ಲಿ ಈಗಾಗಲೇ ಖಾತೆ ಹೊಂದಿರುವವರ ಅಥವಾ ಗೌರವಾನ್ವಿತ ವ್ಯಕ್ತಿಗಳ ಪರಿಚಯವನ್ನು ಅರ್ಜಿ ನಮೂನೆಯಲ್ಲಿ ನಮೂದಿಸಿ ಅವರ ಸಹಿಗಳನ್ನು ಮಾಡಿಸಬೇಕಾಗುತ್ತದೆ. ಈ ಪರಿಚಯವು ಬ್ಯಾಂಕಿನ ರಕ್ಷಣಾದೃಷ್ಟಿಯಿಂದ ಅವಶ್ಯಕವಾಗಿರುತ್ತದೆ.

5. **ಬ್ಯಾಂಕು ಖಾತೆಯನ್ನು ತೆಗೆಯುವ ನಮೂನೆಯನ್ನು ಬ್ಯಾಂಕಿಗೆ ಒಪ್ಪಿಸುವುದು:** ಬ್ಯಾಂಕು ಖಾತೆ ತೆಗೆಯುವ ನಮೂನೆಯನ್ನು ಎಲ್ಲ ರೀತಿಗಳಲ್ಲು ಭರ್ತಿ ಮಾಡಿದ ಮೇಲೆ ಅದಕ್ಕೆ ಸಂಬಂಧ ಪಟ್ಟ ಅಡಕಗಳನ್ನು ಲಗತ್ತಿಸಿ ಬ್ಯಾಂಕಿಗೆ ಸಲ್ಲಿಸಿ.

© KTBS NOT TO BE REPUBLISHED

6. **ಅಧಿಕಾರಿಯ ಒಪ್ಪಿಗೆ :** ನಾವು ಸಲ್ಲಿಸಿದ ಮಾಹಿತಿಯು ಅಧಿಕಾರಿಗೆ ಎಲ್ಲ ರೀತಿಯಲ್ಲೂ ಸಮಂಜಸವಾಗಿದೆ ಎಂದು ಮನವರಿಕೆಯಾದರೆ ಖಾತೆ ತೆರೆಯಲು ಅನುಮತಿ ಕೊಡುತ್ತಾರೆ. ಅಡಕಗಳಲ್ಲಿ ಮುಖ್ಯವಾದವುಗಳು ಗುರುತಿನ ಚೀಟಿ, ಇತ್ತೀಚಿನ ವಿಳಾಸ ಗುರುತು, ಪಾನ್‌ಕಾರ್ಡ್ ಮತ್ತು ಆಧಾರ್ ಕಾರ್ಡ್ ಇತ್ಯಾದಿ.

7. **ಪ್ರಾರಂಭಿಕ ಠೇವಣಿ :** ಪ್ರಸ್ತಾವನಾ ಅರ್ಜಿಯನ್ನು ಎಲ್ಲ ರೀತಿಯಲ್ಲೂ ಪರಿಶೀಲಿಸಿದ ನಂತರ ಅಧಿಕಾರಿಯು ಪ್ರಾರಂಭಿಕ ಠೇವಣಿಯನ್ನು ಬ್ಯಾಂಕಿನಲ್ಲಿ ಕಟ್ಟಲು ಹೇಳುತ್ತಾನೆ. ಈ ಹಣ ಪಾವತಿಗೆ ಒಂದು ನಮೂನೆ ಇದ್ದು ಇದನ್ನು ಚಲನ್ ಎಂದು ಕರೆಯುತ್ತೇವೆ. ನಿಶ್ಚಿತ ಠೇವಣಿ ಖಾತೆಯಾದರೆ ಮತ್ತೊಂದು ಅರ್ಜಿಯನ್ನು ಭರ್ತಿಮಾಡಬೇಕಾಗುತ್ತದೆ. ಆವರ್ತ ಖಾತೆಗೆ ಪಾಸ್ ಪುಸ್ತಕವನ್ನು ಕೊಡಲಾಗುತ್ತದೆ. ಉಳಿತಾಯ ಖಾತೆ ಅಥವಾ ಚಾಲ್ತಿ ಖಾತೆ ಆದಲ್ಲಿ ಹಣ ಹಿಂದಕ್ಕೆ ಪಡೆಯಲು ಅನುಕೂಲವಾಗುವಂತೆ ಚೆಕ್ ಪುಸ್ತಕವನ್ನು ಕೊಡಲಾಗುತ್ತದೆ.

**ಬ್ಯಾಂಕು ಖಾತೆಯನ್ನು ತೆಗೆಯುವುದರಿಂದ ಆಗುವ ಅನುಕೂಲಗಳು :**

- ಬ್ಯಾಂಕು ಖಾತೆಯು ಹಣದ ಭದ್ರತೆ ಕಾಪಾಡುತ್ತದೆ.
- ಬ್ಯಾಂಕು ಖಾತೆಯು ಹಣದ ಪಾವತಿಗಳನ್ನು ಮಾಡಲು ಸಹಾಯ ಮಾಡುತ್ತದೆ.
- ಬ್ಯಾಂಕು ಖಾತೆಯು ಹಣವನ್ನು ವಸೂಲು ಮಾಡಲು ಸಹಾಯ ಮಾಡುತ್ತದೆ.
- ಬ್ಯಾಂಕು ಖಾತೆಯನ್ನು ಹೊಂದಿರುವವರು ಸಾಲ ಪಡೆಯಲು ಸಾಧ್ಯವಾಗುತ್ತದೆ.
- ಬ್ಯಾಂಕು ಖಾತೆಯು ವ್ಯವಹಾರಗಳನ್ನು ಸುಗಮವಾಗಿ ನಡೆಸಲು ಸಾಧ್ಯಮಾಡಿಕೊಡುತ್ತದೆ.
- ಬ್ಯಾಂಕು ಖಾತೆದಾರರು ಭದ್ರತಾ ಕಪಾಟುಗಳನ್ನು ಪಡೆಯಬಹುದು.

NOT TO BE REPUBLISHED ©KTBS

**ಬ್ಯಾಂಕು ವ್ಯವಹಾರಗಳು :**

ಬ್ಯಾಂಕು ಈ ಕೆಳಗಿನ ಮುಖ್ಯ ವ್ಯವಹಾರಗಳನ್ನು ನಿರ್ವಹಿಸುತ್ತದೆ.

- ಉಳಿತಾಯ ಖಾತೆಗಳನ್ನು ತೆರೆಯುವುದರ ಮೂಲಕ ಗ್ರಾಹಕರಲ್ಲಿ ಉಳಿತಾಯಕ್ಕೆ ಬೆಂಬಲ ನೀಡುತ್ತದೆ.
- ಬ್ಯಾಂಕು ಉಳಿತಾಯಗಳನ್ನು ಒಟ್ಟುಗೂಡಿಸಿ ಸಾಲಗಳನ್ನು ನೀಡುತ್ತದೆ.
- ಬ್ಯಾಂಕು ಖಾತೆ ಹೊಂದಿರುವವರ ಹೆಸರಿನ ಕ್ರಾಸ್ ಮಾಡಿದ ಚೆಕ್ಕುಗಳು ಮತ್ತು ಹುಂಡಿಗಳನ್ನು ಅವರ ಖಾತೆಗೆ ಮಾತ್ರ ಜಮಾ ಮಾಡುತ್ತದೆ ಹಾಗೂ ಅವರ ಹೆಸರಿನ ಚೆಕ್ಕು ಅಥವಾ ಹುಂಡಿಗಳನ್ನು ಬೇರೆ ಬ್ಯಾಂಕುಗಳಿಂದ ವಸೂಲು ಮಾಡುತ್ತದೆ.
- ಹಣವನ್ನು ಚೆಕ್ಕಿನ ಮೂಲಕವಾಗಲಿ ಅಥವಾ ಬ್ಯಾಂಕಿನಲ್ಲಿ ನಿಗದಿತ ಹಣ ಹಿಂಪಡೆಯುವ ಚೀಟಿಯ ಮೂಲಕವಾಗಲಿ ವಾಪಸ್ಸು ಪಡೆಯಬಹುದು. ಹಣವನ್ನು ಹಿಂದಕ್ಕೆ ಪಡೆಯುವ ಚೀಟಿಯ ಮೂಲಕ ಪಡೆಯಬೇಕಾದರೆ ಠೇವಣಿದಾರನು ಖುದ್ದಾಗಿ ಬ್ಯಾಂಕಿಗೆ ಹೋಗಿ ಹಣವನ್ನು ಹಿಂಪಡೆಯಬಹುದು. ಹಣ ಹಿಂದಕ್ಕೆ ಪಡೆಯಲು ಇತ್ತೀಚಿಗೆ ATM (Automatic Teller Machine) ನ ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡುಗಳು ರೂಢಿಯಲ್ಲಿ ಬಂದಿವೆ.

- ಖಾತೆದಾರನು ಬ್ಯಾಂಕಿನ ಒಂದು ಸ್ಥಿರ ಆದೇಶದ ಮೂಲಕ ನಿಯತಕಾಲಿಕ ಸಂದಾಯಗಳನ್ನು ಮಾಡಲು ಆದೇಶಿಸಬಹುದು. ಉದಾ : ವಿಮಾ ಕಂತಿನ ಪಾವತಿ, ವರಮಾನ ತೆರಿಗೆ ಪಾವತಿ, ವಿದ್ಯುಚ್ಛಕ್ತಿ ಬಿಲ್ಲು, ದೂರವಾಣಿ ಬಿಲ್ಲು ಮುಂತಾದುವು. ಈ ಸಂದಾಯಗಳು ಖಾತೆದಾರನ ಖಾತೆಯಲ್ಲಿ ಖರ್ಚಾಗುತ್ತವೆ.
- ಖಾತೆದಾರನಿಗೆ ಗೊತ್ತುಪಡಿಸಿರುವ ದರಗಳಲ್ಲಿ ದಿನವಹಿ, ಮಾಹೆಯಾನ, ತ್ರೈಮಾಸಿಕ, ಅರ್ಧವಾರ್ಷಿಕ ಹಾಗೂ ವಾರ್ಷಿಕವಾಗಿ ಬಡ್ಡಿಯನ್ನು ಅವರ ಖಾತೆಗೆ ಜಮಾ ಮಾಡಲಾಗುತ್ತದೆ. ಸಾಮಾನ್ಯವಾಗಿ ಅರ್ಧವರ್ಷಕ್ಕೊಮ್ಮೆ ಏಪ್ರಿಲ್ ಮತ್ತು ಅಕ್ಟೋಬರ್‌ಗಳಲ್ಲಿ ಅಥವಾ ಫೆಬ್ರವರಿ ಮತ್ತು ಜುಲೈ ತಿಂಗಳುಗಳಲ್ಲಿ ಈ ಬಡ್ಡಿಯನ್ನು ಜಮಾಮಾಡಲಾಗುತ್ತದೆ.
- ಬ್ಯಾಂಕು ಖಾತೆಗಳನ್ನು ಅದೇ ಬ್ಯಾಂಕಿನ ಇತರೆ ಶಾಖೆಗಳಿಗೆ ಖಾತೆದಾರರ ಆದೇಶದಂತೆ ಶಾಖೆಗಳಿಗೆ ವರ್ಗಾಯಿಸುವ ಅವಕಾಶ ಕಲ್ಪಿಸಲಾಗಿದೆ.
- ಬ್ಯಾಂಕಿನಲ್ಲಿ ಖಾತೆಗಳನ್ನು ಅಂತ್ಯ ಮಾಡಲು ಅವಕಾಶಗಳಿವೆ. ಇದಕ್ಕೆ ಕಾರಣಸಹಿತ ವಿನಂತಿ ಮಾಡಬೇಕಾಗುತ್ತದೆ. ಈ ರೀತಿ ಅಂತ್ಯಗೊಳಿಸಲು ಪಾಸ್‌ಪುಸ್ತಕ, ಉಳಿದಿರುವ ಚೆಕ್ಕು ಹಾಳೆಗಳು, ATM, ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡು ಮುಂತಾದವುಗಳನ್ನು ಹಿಂದಿರುಗಿಸ ಬೇಕಾಗುತ್ತದೆ. ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡುಗಳನ್ನು ಎರಡು ತುಂಡುಗಳಾಗಿ ಕತ್ತರಿಸಲಾಗುತ್ತದೆ.

## ಅಭ್ಯಾಸಗಳು

**I. ಖಾಲಿ ಬಿಟ್ಟ ಸ್ಥಳಗಳನ್ನು ಸೂಕ್ತ ಉತ್ತರಗಳಿಂದ ತುಂಬಿರಿ.**

1. ಬ್ಯಾಂಕ್ ಎಂಬ ಪದವು ಫ್ರೆಂಚಿನ __________ ಶಬ್ದದಿಂದ ಬಂದಿದೆ.
2. ಬ್ಯಾಂಕುಗಳ ಬ್ಯಾಂಕ್ __________ ಆಗಿದೆ.
3. ರಾಷ್ಟ್ರೀಕೃತ ಬ್ಯಾಂಕಿಗೆ ಉದಾಹರಣೆ __________ .
4. ರಾಷ್ಟ್ರೀಯ ಉಳಿತಾಯ ಪತ್ರಗಳನ್ನು __________ ಇಲಾಖೆಯು ನೀಡುತ್ತದೆ.
5. ಬ್ಯಾಂಕಿನಲ್ಲಿ ದಿನಕ್ಕೆ ಎಷ್ಟು ಬಾರಿಯಾದರೂ ವ್ಯವಹರಿಸಬಹುದಾದ ಖಾತೆ __________.
6. ಠೇವಣಿಯನ್ನು ನಿಗಧಿತ ಅವಧಿಗೆ __________ ಖಾತೆಯಲ್ಲಿ ಇಡಬಹುದಾಗಿದೆ.

**II. ಈ ಕೆಳಗಿನ ಪ್ರಶ್ನೆಗಳಿಗೆ ಗುಂಪುಗಳಲ್ಲಿ ಚರ್ಚಿಸಿ ಉತ್ತರಿಸಿ.**

1. ಬ್ಯಾಂಕ್ ಎಂದರೇನು ?
2. ಬ್ಯಾಂಕಿನ ವ್ಯವಹಾರಕ್ಕೆ ಸಂಬಂಧಿಸಿದಂತೆ ಗಮನಿಸಬಹುದಾದ ಗುಣಲಕ್ಷಣಗಳ ಪಟ್ಟಿ ಮಾಡಿ.
3. ಬ್ಯಾಂಕ್ ನಿರ್ವಹಿಸುವ ಕಾರ್ಯಗಳಾವುವು ?
4. ಬ್ಯಾಂಕ್ ಮತ್ತು ಗ್ರಾಹಕರ ಸಂಬಂಧವನ್ನು ತಿಳಿಸಿ.
5. ಬ್ಯಾಂಕ್ ಖಾತೆಗಳಲ್ಲಿ ಉಳಿತಾಯ ಖಾತೆ ತೆರೆಯುವವರ ಸಂಖ್ಯೆ ಹೇರಳವಾಗಿರುತ್ತದೆ. ಕಾರಣ ಕೊಡಿ.
6. ಬ್ಯಾಂಕ್ ಖಾತೆ ತೆರೆಯುವುದರಿಂದಾಗುವ ಅನುಕೂಲಗಳಾವುವು ?

© KTBS NOT TO BE REPUBLISHED

**III. ಚಟುವಟಿಕೆಗಳು :**

1. ನಿಮಗೆ ತಿಳಿದಿರುವ ಬ್ಯಾಂಕ್‌ಗಳ ಹೆಸರುಗಳ ಪಟ್ಟಿ ತಯಾರಿಸಿ.
2. ಬ್ಯಾಂಕಿಗೆ ಭೇಟಿ ನೀಡಿ ನಿಶ್ಚಿತ ಠೇವಣಿ ಖಾತೆಯಲ್ಲಿ ಠೇವಣಿ ಇಡುವ ಬಗ್ಗೆ, ಬಡ್ಡಿದರ ಹಿಂಪಡೆಯುವ ಕ್ರಮದ ಬಗ್ಗೆ ಮಾಹಿತಿ ಸಂಗ್ರಹಿಸಿ.

**IV. ಯೋಜನೆ :**

1. ಬ್ಯಾಂಕಿನಲ್ಲಿ ಖಾತೆ ತೆರೆಯುವ ಬಗ್ಗೆ ಬ್ಯಾಂಕ್ ವ್ಯವಸ್ಥಾಪಕರೊಂದಿಗೆ ಭೇಟಿ ನೀಡಿ ಕ್ರಮವನ್ನು ತಿಳಿದು ಅವಶ್ಯಕವಿದ್ದಲ್ಲಿ ಖಾತೆ ತೆರಿಯಿರಿ.

@KTBS
NOT TO BE REPUBLISHED